# ಪ್ರವಾದಿ ಯೆರೆಮೀಯನ ಗ್ರಂಥ

ಮುನ್ನುಡಿ

ಪ್ರವಾದಿ ಯೆರೆಮೀಯನ ಕಾಲ ಕ್ರಿಸ್ತಪೂರ್ವ 7ನೇ ಶತಮಾನದ ಉತ್ತರಾರ್ಧ ಹಾಗೂ 6ನೇ ಶತಮಾನದ ಪೂರ್ವಾರ್ಧ. ತನ್ನ ಈ ದೀರ್ಘಕಾಲದ ಸೇವಾವಧಿಯಲ್ಲಿ ದೇವಜನರಿಗೂ ಅವರ ನಾಡಿಗೂ ಬಂದೊದಗಲಿದ್ದ ಗಂಡಾಂತರಗಳನ್ನು ಮುಂತಿಳಿಸಬೇಕಾಗಿತ್ತು. ಆನರ ಪಾಪ ಹಾಗೂ ವಿಗ್ರಹಾರಾಧನೆ ಇವೇ ಇದಕ್ಕೆ ಮೂಲ ಕಾರಣವೆಂದು ಎಚ್ಚರಿಕೆ ನೀಡಬೇಕಾಗಿತ್ತು. ಆ ಕೇಡುಗಳೆಲ್ಲವು ಯೆರೆಮೀಯನ ಜೀವನ ಕಾಲದಲ್ಲಿ ಕಾರ್ಯಗತವಾದವು. ಪ್ರಖ್ಯಾತ ಜೆರುಸಲೇಮ್ (ಕ್ರಿ.ಪೂ. 586) ನಾಶವಾಯಿತು. ಬಾಬಿಲೋನಿಯಾದ ಅರಸ ನೆಬೂಕದ್ನೆಚ್ಚರನು ಬಂದು ಅದನ್ನು ಆಕ್ರಮಿಸಿಕೊಂಡನು. ಪವಿತ್ರವಾದ ಮಹಾದೇವಾಲಯ ನೆಲಸಮವಾಯಿತು. ಯೆಹೂದ ಜನತೆ ಸೆರೆಯಾಳಾಗಿ ಬಾಬಿಲೋನಿಗೆ ವಲಸೆ ಹೋಗಬೇಕಾಯಿತು.

ಈ ಅನಾಹುತಗಳ ಮಧ್ಯೆ ಯೆರೆಮೀಯನು ಭವ್ಯ ಭವಿಷ್ಯದ ಆಶ್ವಾಸನೆಯನ್ನು ನೀಡುತ್ತಾನೆ. ದೇವಜನರು ಸ್ವಂತ ನಾಡಿಗೆ ಹಿಂತಿರುಗುವರು. ಅವರ ನಾಡು ಪುನಃ ಉದ್ಧಾರವಾಗುವುದು ಎಂದು ಧೈರ್ಯ ನೀಡುತ್ತಾನೆ.

ಯೆರೆಮೀಯನದು ಸೂಕ್ಷ್ಮ ಮನಸ್ಸು. ಮೃದು ಹೃದಯ. ತನ್ನ ನಾಡಿಗರ ಬಗ್ಗೆ ಅಪಾರ ಪ್ರೀತಿ ಅವನಿಗಿತ್ತು. ಅವರ ಕಿವಿಗೆ ಕಹಿಯಾದ ವಿಷಯಗಳನ್ನು ತಿಳಿಸಲು ಅವನಿಗೆ ಎಷ್ಟು ಮಾತ್ರವು ಇಷ್ಟವಿರಲಿಲ್ಲ. ಆದರೂ ದೇವರ ಆಜ್ಞೆಗೆ ತಲೆಬಾಗಿ ಆ ಕಠಿಣವಾದ ಪ್ರವಾದನೆಗಳನ್ನು ನುಡಿಯಬೇಕಾಯಿತು. ದೇವರ ವಾಕ್ಯ ಅವನ ಹೃದಯದಲ್ಲಿ ಬೆಂಕಿಯಂತೆ ಕುದಿಯುತ್ತಿತ್ತು; ಅದನ್ನು ತಡೆಹಿಡಿಯಲು ಅವನಿಂದ ಆಗುತ್ತಿರಲಿಲ್ಲ. ಕಾಲ ಬರಲಿದೆ, ಆಗ ದೇವರೊಡನೆ ಹೊಸ ಒಡಂಬಡಿಕೆಯನ್ನೇ ಮಾಡಿಕೊಳ್ಳಬೇಕಾಗುವುದು. ಆ ಹೊಸ ಒಪ್ಪಂದವನ್ನು ಕಾರ್ಯ ರೂಪಕ್ಕೆ ತನ್ನಿ ಎಂದು ಬುದ್ಧಿ ಹೇಳಲು ಬೋಧಕರು ಬೇಕಾಗುವುದಿಲ್ಲ. ಏಕೆಂದರೆ ಅದು ಕಾಗದದ ಮೇಲಲ್ಲ. ಹೃದಯದ ಹಲಗೆಯ ಮೇಲೆ ಲಿಖಿತವಾಗಲಿದೆ (31.31–34). ಈ ಮುಂತಾದ ಮುತ್ತಿನಂತ ಮಾತುಗಳು ಈ ಗ್ರಂಥದಲ್ಲಿವೆ.

**ಪರಿವಿಡಿ**


| | | | | |
|---|---|---|---|---|
| 1. ಯೆರೆಮೀಯನಿಗೆ ದೇವರಿಂದ ಬಂದ ಪ್ರತ್ಯೇಕ ಕರೆ | – | 1.1 | – | 19 |
| 2. ಯೋಷೀಯಾ, ಯೆಹೋಯಾಕೀಮ್ ಮತ್ತು ಚಿದ್ಕೀಯ ಎಂಬ ಅರಸರುಗಳ ಕಾಲದಲ್ಲಿ ಮಾಡಲಾದ ಪ್ರವಾದನೆಗಳು | – | 2.1 | – | 25.38 |
| 3. ಯೆರೆಮೀಯನ ಜೀವನದಲ್ಲಿ ನಡೆದ ಘಟನೆಗಳು | – | 26.1 | – | 45.5 |
| 4. ರಾಷ್ಟ್ರಗಳಿಗೆ ವಿರುದ್ಧ ಮಾಡಿದ ಪ್ರವಾದನೆಗಳು | – | 46.1 | – | 51.64 |
| 5. ಜೆರುಸಲೇಮಿನ ಪತನ | – | 52.1 | – | 52.34 |


**ಪ್ರವಾದಿ ಯೆರೆಮೀಯನ ಗ್ರಂಥ ಪರಿಚಯ**

**1** ಇವು ಯೆರೆಮೀಯನ ಪ್ರವಚನಗಳು. ಈತ ಬೆನ್ಯಮೀನ್ ಪ್ರಾಂತ್ಯಕ್ಕೆ ಸೇರಿದ ಅನಾತೋತ್ ಊರಿನ ಯಾಜಕ ವರ್ಗದವನು. ಇವನ ತಂದೆ ಹಿಲ್ಕೀಯನು. 2ಜುದೇಯದ ಅರಸನೂ ಅಮೋನನ ಮಗನೂ ಆದ ಯೋಷೀಯನ ಆಳ್ವಿಕೆಯ ಹದಿ ಮೂರನೆಯ ವರುಷದಲ್ಲಿ ಸರ್ವೇಶ್ವರ ಸ್ವಾಮಿಯ ವಾಣಿ ಇವನಿಗೆ ಕೇಳಿಬಂತು. 3ಅಲ್ಲದೆ, ಜುದೇಯದ ಅರಸನೂ ಯೋಷೀಯನ ಮಗನೂ ಆದ ಯೆಹೋಯಾಕೀಮನ ಕಾಲದಿಂದ ಜುದೇಯದ ಅರಸನೂ ಯೋಷೀಯನ ಮಗನೂ ಆದ ಚಿದ್ಕೀಯನ ಆಳ್ವಿಕೆಯ ಹನ್ನೊಂದನೆಯ ವರುಷದ ಐದನೆಯ ತಿಂಗಳಿನಲ್ಲಿ ಜೆರುಸಲೇಮಿನ ಜನರು ಸೆರೆಹೋಗುವ ತನಕ ಸರ್ವೇಶ್ವರ ಸ್ವಾಮಿಯ ವಾಣಿ ಇವನಿಗೆ ಕೇಳಿಬರುತ್ತಿತ್ತು.

### ಯೆರೆಮೀಯನಿಗೆ ಪ್ರವಾದಿ ಪಟ್ಟ

4 ಸರ್ವೇಶ್ವರಸ್ವಾಮಿ ಈ ವಾಣಿಯನ್ನು ನನಗೆ ದಯಪಾಲಿಸಿದರು: 5"ನಿನ್ನನ್ನು ತಾಯಿಯ ಗರ್ಭದಲ್ಲಿ ರೂಪಿಸುವುದಕ್ಕೆ ಮುಂಚೆಯೇ ನಿನ್ನನ್ನು ನಾನು ತಿಳಿದಿದ್ದೆ; ನೀನು ಉದರದಿಂದ ಹೊರ ಬರುವುದಕ್ಕೆ ಮೊದಲೇ ನಿನ್ನನ್ನು ಪವಿತ್ರೀಕರಿಸಿದ್ದೆ; ನಿನ್ನನ್ನು ರಾಷ್ಟ್ರಗಳಿಗೆ ಪ್ರವಾದಿಯನ್ನಾಗಿ ನೇಮಿಸಿದ್ದೇನೆ."

6 ಅದಕ್ಕೆ ನಾನು, "ಅಯ್ಯೋ, ಸ್ವಾಮಿ ಸರ್ವೇಶ್ವರಾ, ನಾನು ಮಾತುಬಲ್ಲವನಲ್ಲ, ಇನ್ನೂ ತರುಣ," ಎಂದು ಬಿನ್ನವಿಸಿದೆ.

7 ಆಗ ಸರ್ವೇಶ್ವರ ನನಗೆ, "ನಾನೊಬ್ಬ ತರುಣ ಎನ್ನಬೇಡ; ಯಾರ ಬಳಿಗೆ ನಿನ್ನನ್ನು ಕಳಿಸುತ್ತೇನೋ, ಅವರೆಲ್ಲರ ಬಳಿಗೆ ನೀನು ಹೋಗಲೇಬೇಕು; ನಾನು ಆಜ್ಞಾಪಿಸುವುದನ್ನೆಲ್ಲ ನುಡಿಯಲೇ ಬೇಕು. 8ಅವರಿಗೆ ಅಂಜಬೇಡ; ನಿನ್ನನ್ನು ಕಾಪಾಡಲು ನಾನೇ ನಿನ್ನೊಂದಿಗೆ ಇರುತ್ತೇನೆ; ಇದು ಸರ್ವೇಶ್ವರನಾದ ನನ್ನ ಮಾತು," ಎಂದು ಹೇಳಿದರು.

9 ಬಳಿಕ ಸ್ವಾಮಿ ಕೈಚಾಚಿ ನನ್ನ ಬಾಯನ್ನು ಮುಟ್ಟಿ, "ಇಗೋ, ನಿನ್ನ ಬಾಯಲ್ಲಿ ನನ್ನ ಮಾತುಗಳನ್ನು ಇಟ್ಟಿದ್ದೇನೆ; 10ರಾಷ್ಟ್ರಗಳ ಮೇಲೂ ರಾಜ್ಯಗಳ ಮೇಲೂ ಅಧಿಕಾರವುಳ್ಳವನನ್ನಾಗಿ ನಾನು ನಿನ್ನನ್ನು ಈ ದಿನ ನೇಮಿಸಿದ್ದೇನೆ. ಇದರಿಂದಾಗಿ ಕಿತ್ತುಹಾಕುವ ಹಾಗು ಕೆಡುವುವ, ನಾಶ ಪಡಿಸುವ ಹಾಗು ನೆಲಸಮಮಾಡುವ, ಕಟ್ಟುವ ಹಾಗು ನೆಡುವ ಕಾರ್ಯ ನಿನ್ನದು," ಎಂದರು.

### ಎರಡು ದರ್ಶನಗಳು

11 ಇದಲ್ಲದೆ ಸರ್ವೇಶ್ವರಸ್ವಾಮಿ, "ಎಲೈ ಯೆರೆಮೀಯನೇ, ಏನು ನೋಡುತ್ತಿರುವೆ?" ಎಂದು ಕೇಳಿದರು.

ಅದಕ್ಕೆ ನಾನು, "ಚಚ್ಚರ ಮರದ ರೆಂಬೆಯನ್ನು ನೋಡುತ್ತಿದ್ದೇನೆ," ಎಂದೆ.

12 ಆಗ ಸ್ವಾಮಿ ನನಗೆ, "ಸರಿಯಾಗಿ ನೋಡಿದೆ; ನನ್ನ ಮಾತನ್ನು ನೆರವೇರಿಸುವುದಕ್ಕೆ ಎಚ್ಚರಗೊಂಡಿದ್ದೇನೆಂದು ತಿಳಿದುಕೊ" ಎಂಬುದಾಗಿ ಹೇಳಿದರು.

13 ಮತ್ತೆ ಸರ್ವೇಶ್ವರ ನನಗೆ, "ಇನ್ನೂ ಏನು ನೋಡುತ್ತಿರುವೆ?" ಎಂದರು.

ಅದಕ್ಕೆ ನಾನು, "ಉರಿಯುತ್ತಿರುವ ಬೆಂಕಿಯಿಂದ ಉಕ್ಕುವ ಹಂಡೆಯೊಂದನ್ನು ನೋಡುತ್ತಿದ್ದೇನೆ. ಅದರ ಬಾಯಿ ಉತ್ತರದಿಂದ ಇತ್ತ ಬಾಗಿಕೊಂಡಿದೆ," ಎಂದೆ.

14 ಅದಕ್ಕೆ ಸ್ವಾಮಿ ನನಗೆ ಹೀಗೆಂದರು: "ಈ ನಾಡಿನ ನಿವಾಸಿಗಳೆಲ್ಲರ ಮೇಲೆ ಉತ್ತರದಿಂದ ಕೇಡು ಉಕ್ಕಿಬರುವುದು. 15ಇಗೋ, ಉತ್ತರದ ರಾಜ್ಯಗಳನ್ನೆಲ್ಲಾ ನಾನು ಕರೆಯುವೆನು; ಅವರು ಬಂದು ಜೆರುಸಲೇಮಿನ ಊರಬಾಗಿಲುಗಳ ಎದುರಿನಲ್ಲೂ ಅದರ ಎಲ್ಲ ಪೌಳಿಗೋಡೆಗಳ ಸುತ್ತಲೂ ಜುದೇಯದ ಎಲ್ಲ ನಗರಗಳಲ್ಲೂ ತಮ್ಮ ತಮ್ಮ ಸಿಂಹಾಸನಗಳನ್ನು ಹಾಕಿಕೊಳ್ಳುವರು. 16ನನ್ನ ಸ್ವಜನರು ನನ್ನನ್ನೆ ತೊರೆದುಬಿಟ್ಟು, ಅನ್ಯದೇವತೆಗಳಿಗೆ ಬಲಿಯರ್ಪಿಸಿ, ತಮ್ಮ ಕೈಯಿಂದ ನಿರ್ಮಿಸಿದ ಮೂರ್ತಿಗಳಿಗೆ ಆರಾಧನೆ ಮಾಡುತ್ತಿದ್ದಾರೆ; ಇಂಥ ಅಧರ್ಮಕ್ಕೆಲ್ಲ ನಾನು ಅವರಿಗೆ ವಿಧಿಸುವ ದಂಡನೆಗಳನ್ನು ತಿಳಿಸುವೆನು, ಕೇಳು: 17ನೀನು ಎದ್ದು ನಡುಕಟ್ಟಿಕೊ, ನಾನು ಆಜ್ಞಾಪಿಸುವುದನ್ನೆಲ್ಲ ಅವರಿಗೆ ತಿಳಿಸು, ಅವರಿಗೆ ಹೆದರಬೇಡ;

ಹೆದರಿದರೆ ನಾನೂ ನಿನ್ನನ್ನು ಅವರ ಮುಂದೆ ಹೆದರಿಸುವೆನು. 18ನಾನು ಹೇಳುವುದನ್ನು ಗಮನದಿಂದ ಕೇಳು
– ಈ ದಿನ ನಿನ್ನನ್ನು ಜುದೇಯದ ಅರಸರು, ಅಧಿಪತಿಗಳು, ಯಾಜಕರು, ಜನ ಸಾಮಾನ್ಯರು, ಹೀಗೆ
ನಾಡಿನವರೆಲ್ಲರನ್ನು ಎದುರಿಸತಕ್ಕವನನ್ನಾಗಿ ಮಾಡಿದ್ದೇನೆ; ಕೋಟೆ ಕೊತ್ತಲಗಳಿಂದ ಸುಸಜ್ಜಿತ
ನಗರವನ್ನಾಗಿಯೂ ಕಬ್ಬಿಣದ ಕಂಬವನ್ನಾಗಿಯೂ ತಾಮ್ರದ ಪೌಳಿಗೋಡೆಯನ್ನಾಗಿಯೂ ನಿನ್ನನ್ನು
ಸ್ಥಾಪಿಸಿದ್ದೇನೆ. 19ನಿನಗೆ ವಿರುದ್ಧವಾಗಿ ಅವರು ಯುದ್ಧಮಾಡುವರು; ಆದರೆ ನಿನ್ನನ್ನು ಸೋಲಿಸಲಾಗುವುದಿಲ್ಲ.
ನಿನ್ನನ್ನು ಕಾಪಾಡಲು ನಾನೇ ನಿನ್ನೊಂದಿಗಿರುವೆನು. ಇದು ಸರ್ವೇಶ್ವರನಾದ ನನ್ನ ನುಡಿ".

## ಇಸ್ರಯೇಲಿನ ಬಗ್ಗೆ ದೇವರ ಮಮತೆ

**2** ಸರ್ವೇಶ್ವರಸ್ವಾಮಿ ನನಗೆ ನೀಡಿದ
ಆದೇಶ ಇದು:
2 "ನೀನು ಹೋಗಿ ಜೆರುಸಲೇಮ್ ನಗರಕ್ಕೇ
ಕೇಳಿಸುವಂತೆ ಈ ಸಂದೇಶವನ್ನು ಸಾರು:
ನೀನು ಯೌವನದಲ್ಲಿ ನನ್ನ ಮೇಲಿಟ್ಟಿದ್ದ
ಪ್ರೀತಿಯನ್ನು,
ನವ ವಧುವಾಗಿ ನನಗೆ ತೋರಿಸಿದ
ಪ್ರೇಮವನ್ನು,
ಹಾಗು ಬಿತ್ತನೆಯಿಲ್ಲದ ಅರಣ್ಯಮಾರ್ಗವಾಗಿ
ನನ್ನನ್ನು ಹಿಂಬಾಲಿಸಿದಾಗ ಅನುಸರಿಸುತ್ತಿದ್ದ
ನಿನ್ನ ಪಾತಿವ್ರತ್ಯವನ್ನು
ನನ್ನ ನೆನಪಿನಲ್ಲಿ ಇಟ್ಟುಕೊಂಡಿದ್ದೇನೆ;
ಇದು ನಿನ್ನ ಹಿತಕ್ಕಾಗಿಯೇ.
3 "ಎಲೈ ಇಸ್ರಯೇಲ್, ನೀನು ನನಗೆ
ಮೀಸಲಾದವಳು,
ನನ್ನ ಬೆಳೆಯ ಪ್ರಥಮ ಫಲ.
ಯಾರು ಯಾರು ಅದನ್ನು ತಿಂದರೋ
ಅವರು ದ್ರೋಹಿಗಳು,
ಕೇಡಿಗೆ ಗುರಿಯಾದವರು, ಎನ್ನುತ್ತಾರೆ
ಸರ್ವೇಶ್ವರ."

## ಇಸ್ರಯೇಲಿನ ಪಿತೃಗಳ ದ್ರೋಹ

4 ಯಕೋಬನ ಮನೆತನವೇ,
ಇಸ್ರಯೇಲ್ ವಂಶದ ಸಕಲ ಗೋತ್ರಗಳೇ,
ಸರ್ವೇಶ್ವರಸ್ವಾಮಿಯ ವಾಣಿಯನ್ನು ಕೇಳಿರಿ;
ಸರ್ವೇಶ್ವರ ಹೀಗೆನ್ನುತ್ತಾರೆ:
5 "ನಿಮ್ಮ ಪಿತೃಗಳು ನನ್ನಲ್ಲಿ
ಯಾವ ಕೊರತೆಯನ್ನು ಕಂಡು ನನ್ನಿಂದ
ದೂರವಾದರು?
ಅವರು ವ್ಯರ್ಥಾಚಾರಗಳನ್ನು ಅನುಸರಿಸುತ್ತಾ
ತಾವೇ ವ್ಯರ್ಥವಾಗಿಬಿಟ್ಟರು!

6 ಅವರು – 'ನಮ್ಮನ್ನು ಈಜಿಪ್ಟ್ ದೇಶದಿಂದ
ಬರಮಾಡಿ, ಕಾಡುಮೇಡು, ಹಳ್ಳಕೊಳ್ಳ,
ಕಗ್ಗತ್ತಲು, ನಿರ್ಜಲ, ನಿರ್ಜನ
ಹಾಗೂ ಯಾರೂ ಹಾದುಹೋಗದ ಬೆಂಗಾಡಿನ
ಮಾರ್ಗವಾಗಿ ನಡೆಸಿಬಂದ
ಆ ಸರ್ವೇಶ್ವರ ಎಲ್ಲಿ?' – ಎಂದುಕೊಳ್ಳಲಿಲ್ಲವೆ?
7 ನಾನು ನಿಮ್ಮನ್ನು ಫಲವತ್ತಾದ ನಾಡಿಗೆ
ಕರೆತಂದೆ.
ಅದರ ಫಲವನ್ನೂ ಸಾರವನ್ನೂ
ಅನುಭವಿಸುವ ಹಾಗೆ ಮಾಡಿದೆ.
ಆದರೆ ನೀವು ಒಳನುಗ್ಗಿ ಬಂದು
ಆ ನನ್ನ ನಾಡನ್ನು ಹೊಲೆಮಾಡಿದಿರಿ;
ಆ ನನ್ನ ಸೊತ್ತನ್ನು ಅಸಹ್ಯಪಡಿಸಿದಿರಿ.
8 ಯಾಜಕರು, 'ಸರ್ವೇಶ್ವರಸ್ವಾಮಿ ಎಲ್ಲಿ?
ಎಂದು ವಿಚಾರಿಸಲೇ ಇಲ್ಲ.
ಧರ್ಮಶಾಸ್ತ್ರಿಗಳು ನನ್ನನ್ನು ಅರಿತುಕೊಳ್ಳಲಿಲ್ಲ.
ಪ್ರಜಾಪಾಲಕರು ನನಗೆ ದ್ರೋಹಮಾಡಿದರು.
ಪ್ರವಾದಿಗಳು ಬಾಳ್ ದೇವತೆಯ ಆವೇಶದಿಂದ
ಪ್ರವಾದನೆ ಮಾಡಿದರು.
ನಿರರ್ಥಕವಾದುವುಗಳನ್ನು ಪೂಜಿಸಿದರು.'

### ದೇವಜನರೊಡನೆ ಸರ್ವೇಶ್ವರನ ವ್ಯಾಜ್ಯ

9 "ಆದಕಾರಣ ಸರ್ವೇಶ್ವರನಾದ ನಾನು
ನಿಮ್ಮೊಡನೆ ಇನ್ನೂ ವ್ಯಾಜ್ಯಮಾಡುತ್ತೇನೆ;
ನಿಮ್ಮ ಸಂತಾನದವರೊಂದಿಗೂ
ವ್ಯಾಜ್ಯವಾಡುವೆನು,"
ಎನ್ನುತ್ತಾರೆ ಸರ್ವೇಶ್ವರ.
10 "ಸೈಪ್ರಸ್ ದ್ವೀಪಗಳಿಗೆ ಹೋಗಿ ನೋಡಿ;
ಕೇದಾರ್ ನಾಡಿಗೆ ಕಳಿಸಿ ವಿಚಾರಮಾಡಿ,
ಇಂಥ ಕಾರ್ಯ ಎಲ್ಲಿಯಾದರು ನಡೆಯಿತೆ
ಎಂದು ಚೆನ್ನಾಗಿ ಆಲೋಚಿಸಿರಿ.
11 ತನ್ನ ದೇವತೆಗಳು ದೇವರಲ್ಲದೆ ಇದ್ದರೂ
ಅವುಗಳನ್ನು
ಯಾವ ಜನಾಂಗವಾದರು
ಬದಲಾಯಿಸಿಕೊಂಡಿತೋ?
ಆದರೆ ನನ್ನ ಜನ, ತಮ್ಮ ಮಹಿಮೆಯಾದ
ನನ್ನನ್ನು ತೊರೆದು
ನಿರರ್ಥಕವಾದುವುಗಳನ್ನು ಆರಿಸಿಕೊಂಡಿದ್ದಾರೆ!
12 ಆಕಾಶ ಮಂಡಲವೇ, ಇದನ್ನು ಕೇಳಿ
ನಿಬ್ಬೆರಗಾಗು;

ತತ್ತರಿಸಿ ಹಾಳಾಗು!" ಇದು ಸರ್ವೇಶ್ವರ
ಸ್ವಾಮಿಯ ವಾಣಿ.
13 "ನನ್ನ ಜನರು ಇಬ್ಬಗೆಯ ಅಪರಾಧಗಳನ್ನು
ಎಸಗಿದ್ದಾರೆ;
ಜೀವಜಲದ ಬುಗ್ಗೆಯಾದ ನನ್ನನ್ನೇ
ತೊರೆದುಬಿಟ್ಟಿದ್ದಾರೆ!
ತೊಟ್ಟಿಗಳನ್ನು, ನೀರುನಿಲ್ಲದ ಬಿರುಕು
ತೊಟ್ಟಿಗಳನ್ನು
ತಮಗಾಗಿ ಕೊರೆದುಕೊಂಡಿದ್ದಾರೆ!"

### ಇಸ್ರಯೇಲಿನ ಅಪ್ರಾಮಾಣಿಕತೆ ಮತ್ತು ಅದರ ಪರಿಣಾಮ

14 "ಇಸ್ರಯೇಲ್ ಒಬ್ಬ ಮನೆ ಆಳೊ?
ಮನೆಯಲ್ಲೆ ಗುಲಾಮನಾಗಿ ಹುಟ್ಟಿದವನೋ?
ಇಲ್ಲವಾದರೆ ಬೇರೆಯವರಿಂದ ಏಕೆ
ಸೂರೆಯಾದ?
15 ಶತ್ರುಗಳು ಯುವ ಸಿಂಗಳಂತೆ
ಅವನಿಗೆ ವಿರುದ್ಧ ಗರ್ಜಿಸಿ ಆರ್ಭಟಿಸುತ್ತಿವೆ;
ಅವನ ನಾಡನ್ನು ಹಾಳುಮಾಡಿವೆ,
ಅವನ ಊರುಗಳು ಸುಟ್ಟು ನಿರ್ಜನವಾಗಿವೆ.
16 ಹೌದು, ಮೆಮ್ಫಿಸ್ ಮತ್ತು ತಹಪನೇಸ್
ನಿವಾಸಿಗಳು
ನಿನ್ನ ನಾಡನೆತ್ತಿಯನ್ನು ನುಣ್ಣಗೆ ಮೇದು
ಬಿಟ್ಟಿದ್ದಾರೆ.
17 ನಿನಗೆ ಮಾರ್ಗದರ್ಶಿಯಾಗಿದ್ದ, ನಿನಗೆ
ದೇವರಾಗಿದ್ದ
ಸರ್ವೇಶ್ವರನಾದ ನನ್ನನ್ನೇ ತೊರೆದುಬಿಟ್ಟು
ಇದನ್ನೆಲ್ಲ ನೀನೇ ನಿನ್ನ ಮೇಲೆ
ಬರಮಾಡಿಕೊಂಡಿರುವೆ.
18 ನೈಲ್ ನದಿಯ ನೀರನ್ನು ಕುಡಿಯಲು
ಈಜಿಪ್ಟಿನ ದಾರಿಯನ್ನು ಹಿಡಿದದ್ದರಿಂದ
ನಿನಗೆ ಬಂದ ಲಾಭವಾದರೂ ಏನು?
ಯೂಫ್ರೆಟಿಸ್ ನದಿಯ ಜಲವನ್ನು
ಪಾನಮಾಡಲು
ಅಸ್ಸೀರಿಯ ಮಾರ್ಗದಲ್ಲಿ ಹೆಜ್ಜೆಯಿಟ್ಟದ್ದರಿಂದ
ನಿನಗೆ ಬಂದ ಲಾಭವಾದರೂ ಏನು?
19 ನಿನ್ನ ಕೆಟ್ಟತನವೇ ನಿನ್ನನ್ನು ಶಿಕ್ಷಿಸುವುದು
ನಿನ್ನ ದ್ರೋಹಗಳೇ ನಿನ್ನನ್ನು ಖಂಡಿಸುವುವು.
ನಿನಗೆ ನನ್ನ ಭಯವಿಲ್ಲದೆ
ನಿನ್ನ ದೇವರಾದ ಸರ್ವೇಶ್ವರನಾದ ನನ್ನನ್ನು
ತೊರೆದುಬಿಟ್ಟದ್ದು

ನಿನಗೆ ಕೆಟ್ಟದ್ದಾಗಿಯೂ ಕಹಿಯಾಗಿಯೂ
ಪರಿಣಮಿಸುವುದು.
ಇದನ್ನು ಚೆನ್ನಾಗಿ ಗ್ರಹಿಸಿಕೊ, ಕಣ್ಣಾರೆ ನೋಡು.
ಇದು ಸರ್ವಶಕ್ತನೂ, ಸ್ವಾಮಿ ಸರ್ವೇಶ್ವರನೂ
ಆದ ನನ್ನ ನುಡಿ."

### ಸರ್ವೇಶ್ವರನ ಆರಾಧನೆಗೆ ಒಪ್ಪಂದ ಇಸ್ರಯೇಲ್

20 "ಬಹುಕಾಲದಿಂದ ನೀನು ನಿನ್ನ ನೊಗವನ್ನು
ಮುರಿದಿರುವೆ
ಕಣ್ಣಿಗಳನ್ನು ಕಿತ್ತು, 'ನಾನು ಸೇವೆ
ಮಾಡುವುದಿಲ್ಲ' ಎಂದಿರುವೆ.
ಎತ್ತರವಾದ ಪ್ರತಿಯೊಂದು ಗುಡ್ಡೆಯ ಮೇಲೂ
ಹುಲುಸಾಗಿ ಬೆಳೆದ ಪ್ರತಿಯೊಂದು ಮರದ
ಕೆಳಗೂ
ವೇಶ್ಯೆಯಂತೆ ಬೇರೆ ದೇವರುಗಳಿಗೆ
ಅಡ್ಡಬಿದ್ದಿರುವೆ.
21 ಅತ್ಯುತ್ತಮ ಬೀಜದಿಂದ ಬೆಳೆದ
ಒಳ್ಳೆಯ ದ್ರಾಕ್ಷಾಲತೆಯನ್ನಾಗಿ ನಿನ್ನನ್ನು
ನೆಟ್ಟಿದೆ.
ಆದರೆ ನೀನು ಕಾಡುದ್ರಾಕ್ಷೀ ಬಳ್ಳಿಯ
ಹಾಳು ರೆಂಬೆಗಳಾದದ್ದು ಹೇಗೆ?
22 ನೀನು ಎಷ್ಟೇ ಚೌಳಿನಿಂದ ತೊಳೆದುಕೊಂಡರೂ
ಎಷ್ಟೇ ಸಬ್ಬುಸೀಗೆಯಿಂದ ಉಜ್ಜಿಕೊಂಡರೂ
ನಿನ್ನ ಅಕ್ರಮ ನನ್ನೆದುರಿಗೆ ಕಣ್ಣು ಕಿಚ್ಚಾಗಿ ನಿಂತಿದೆ.
ಇದು ಸರ್ವೇಶ್ವರಸ್ವಾಮಿಯಾದ ನನ್ನ
ನುಡಿ.
23 'ನಾನು ಅಶುದ್ಧಳಾಗಲಿಲ್ಲ, ಬಾಳ್‍ದೇವತೆ
ಗಳನ್ನು ಹಿಂಬಾಲಿಸಲೇ ಇಲ್ಲ'
ಎಂದು ಹೇಗೆ ತಾನೆ ಹೇಳಬಲ್ಲೆ?
ಆ ಕಣಿವೆಯಲ್ಲಿ ನಿನ್ನ ಹೆಜ್ಜೆಗುರುತುಗಳನ್ನು
ನೋಡು
ಅಲ್ಲಿ ನೀನು ಎಸಗಿದ ದುಷ್ಕೃತ್ಯಗಳನ್ನು ಮನಸ್ಸಿಗೆ
ತಂದುಕೊ.
ಅತ್ತ ಇತ್ತ ನೆಗೆದಾಡುವ, ಬೆದೆಗೆ ಬಂದ
ಹೆಣ್ಣು ಒಂಟೆಯಂತಿರುವೆ ನೀನು.
24 ಅಡವಿಯಲ್ಲೆ ಪಳಗಿದ,
ಮದದಿಂದ ಗಾಳಿಯನ್ನು ಬುಸಬುಸನೆ
ಮೂಸಿನೋಡುವ
ಹೆಣ್ಣು ಕಾಡುಕತ್ತೆಯ ಹಾಗಿರುವೆ.
ಅದಕ್ಕೆ ಬೆದೆ ಏರಿದಾಗ

ಯಾವ ಗಂಡುಕತ್ತೆಯೂ ಅದನ್ನು
ಬದಿಗೊತ್ತುವಂತಿಲ್ಲ
ಅದನ್ನು ಹುಡುಕುವವುಗಳೆಲ್ಲ
ಆಯಾಸಪಡಬೇಕಾಗಿಲ್ಲ.
ಅವಳ ತಿಂಗಳಲ್ಲಿ ಅವಳನ್ನು ಸುಲಭವಾಗಿ
ದೊರಕಿಸಿಕೊಳ್ಳುವುವು.
25 ನಾನು, 'ಅನ್ಯದೇವತೆಗಳನ್ನು ಅರಸಿ ಓಡಬೇಡ,
ನಿನ್ನ ಪಾದರಕ್ಷೆ ಸವೆದೀತು,
ನಿನ್ನ ಗಂಟಲು ಸೊರಗೀತು' ಎಂದೆ.
ನೀನೋ, 'ಆ ಮಾತು ಆಶಾದಾಯಕವಲ್ಲ,
ಅದನ್ನು ಕೇಳಲಾಗದು;
ಅನ್ಯದೇವತೆಗಳ ಮೇಲೆ ಮೋಹಗೊಂಡಿದ್ದೇನೆ.
ಅವರನ್ನೇ ಹಿಂಬಾಲಿಸುತ್ತೇನೆ' ಎಂದೆ."

## ಇಸ್ರಯೇಲ್ ಶಿಕ್ಷಾರ್ಹ

26 ಸರ್ವೇಶ್ವರ ಹೀಗೆನ್ನುತ್ತಾರೆ: "ಕಳ್ಳನು ಸಿಕ್ಕಿಬಿದ್ದು ಹೇಗೆ ನಾಚಿಕೆಪಡುತ್ತಾನೋ ಹಾಗೆಯೆ, ಎಲೈ
ಇಸ್ರಯೇಲ್ ಜನರೇ, ನೀವು ನಾಚಿಕೆಪಡುವಿರಿ. ಮರಕ್ಕೆ, 'ನೀನು, ನನ್ನ ತಂದೆ' ಎಂತಲೂ ಹೇಳುತ್ತೀರಿ.
ನಿಮ್ಮ ಅರಸರು, ಅಧಿಪತಿಗಳು, ಯಾಜಕರು, ಪ್ರವಾದಿಗಳು ಎಲ್ಲರು ಮಾನಭಂಗಕ್ಕೆ ಈಡಾಗುವರು. 27ನನಗೆ
ಅಭಿಮುಖರಾಗದೆ ಬೆನ್ನು ಮಾಡಿದ್ದೀರಿ. ಕೇಡು ಸಂಭವಿಸಿದಾಗ ಮಾತ್ರ, 'ಎದ್ದು ಬಂದು ನಮ್ಮನ್ನು
ಉದ್ಧರಿಸು' ಎಂದು ಮೊರೆಯಿಡುತ್ತೀರಿ.

28 "ಎಲೈ ಯೆಹೂದ ಜನರೇ, ನೀವು ನಿರ್ಮಿಸಿಕೊಂಡ ದೇವರುಗಳು ಎಲ್ಲಿ? ನಿಮಗೆ ಕೇಡು
ಸಂಭವಿಸಿದಾಗ ನಿಮ್ಮನ್ನು ಉದ್ಧರಿಸಲು ಅವರು ಶಕ್ತರಾಗಿದ್ದರೆ ಎದ್ದು ಬರಲಿ! ನಿಮಗೆ ನಗರಗಳು
ಎಷ್ಟಿವೆಯೋ ಅಷ್ಟೂ ದೇವರುಗಳು ಇದ್ದಾರೆ! 29ನಿಮ್ಮ ದೂರೇನು? ನೀವೆಲ್ಲರು ನನಗೆ ದ್ರೋಹಿಗಳಾದಿರಿ,
ಏಕೆ? 30ನಾನು ನಿಮ್ಮನ್ನು ದಂಡಿಸಿದ್ದು ವ್ಯರ್ಥವಾಯಿತು, ನೀವು ತಿದ್ದುಕೊಳ್ಳಲಿಲ್ಲ. ಸಂಹರಿಸುವ ಸಿಂಹದಂತೆ
ನಿಮ್ಮ ಪ್ರವಾದಿಗಳನ್ನು ಕತ್ತಿಗೆ ತುತ್ತಾಗಿಸಿದ್ದೀರಿ. 31ಇಸ್ರಯೇಲ್ ಜನರೇ, ದುಷ್ಟಸಂತತಿಯವರೇ,
ಸರ್ವೇಶ್ವರನಾದ ನಾನು ಹೇಳುವುದನ್ನು ಕೇಳಿರಿ: ನಾನು ನಿಮಗೆ ಬೆಂಗಾಡಾಗಿಯೂ
ಗಾಢಾಂಧಕಾರವಾಗಿಯೂ ಪರಿಣಮಿಸಿದ್ದೇನೊ? 'ನಾವು ಮನ ಬಂದಂತೆ ನಡೆದುಕೊಳ್ಳುತ್ತೇವೆ; ನಿನ್ನ ಬಳಿಗೆ
ಇನ್ನು ಬಾರೆವು' ಎಂದು ನನ್ನ ಜನರಾದ ನೀವು ಹೇಳುವುದು ಹೇಗೆ? 32ಒಬ್ಬ ಯುವತಿ ತನ್ನ
ಆಭರಣಗಳನ್ನು, ಒಬ್ಬ ವಧು ತನ್ನ ಡಾಬನ್ನು ಮರೆಯುವುದುಂಟೆ? ನನ್ನ ಜನರೋ ಲೆಕ್ಕವಿಲ್ಲದಷ್ಟು ದಿನ
ನನ್ನನ್ನು ಮರೆತಿದ್ದಾರೆ. 33ನೀವು ನಿಮ್ಮ ನಲ್ಲನಲ್ಲೆಯರನ್ನು ಹುಡುಕಿಕೊಂಡು ಹೋಗುವುದರಲ್ಲಿ ಎಷ್ಟೋ
ನಿಪುಣರು! ಬಲು ಕೆಟ್ಟ ಹೆಂಗಸು ಕೂಡ ನಿಮ್ಮಿಂದ ಕಲಿತುಕೊಳ್ಳಬಹುದಾಗಿದೆ. 34ಇದಲ್ಲದೆ,
ನಿರ್ದೋಷಿಗಳಾದ ದೀನದಲಿತರ ಪ್ರಾಣರಕ್ತ ನಿಮ್ಮ ಬಟ್ಟೆಗೆ ಅಂಟಿಕೊಂಡಿದೆ! 'ಇವರು ಕನ್ನ
ಕೊರೆಯುವುದನ್ನು ಕಂಡೆವು' ಎಂದು ನೀವು ನೆವ ಹೇಳುವಂತಿಲ್ಲ. ನಿಮ್ಮ ಈ ಎಲ್ಲ ದುರಭ್ಯಾಸಗಳ ನಿಮಿತ್ತ
ದಂಡಿಸುವೆನು.

35 "ನೀವಾದರೊ, 'ನಾವು ನಿರ್ದೋಷಿಗಳು, ಸರ್ವೇಶ್ವರನ ಕೋಪ ನಮ್ಮ ಮೇಲಿಂದ ತೊಲಗಿ
ಹೋಗಿದೆ, ಇದು ನಿಶ್ಚಯ' ಎಂದುಕೊಂಡಿದ್ದೀರಿ. 'ನಾವು ಪಾಪಮಾಡಿಲ್ಲ' ಎಂದು ನೀವು ಹೇಳಿದ ಕಾರಣ
ನಿಮ್ಮನ್ನು ನ್ಯಾಯತೀರ್ಪಿಗೆ ಗುರಿಮಾಡಿಯೇ ತೀರುವೆನು. 36ನಿಮ್ಮ ಮಾರ್ಗವನ್ನು ಕೈಬಿಟ್ಟು ಎಷ್ಟು
ಸುಲಭವಾಗಿ ಅತ್ತಿತ್ತ ಓಡಾಡುತ್ತೀರಿ! ಅಸ್ಸೀರಿಯದ ವಿಷಯವಾಗಿ ಹೇಗೆ ಆಶಾಭಂಗ ಪಟ್ಟಿರೋ ಹಾಗೆಯೇ
ಈಜಿಪ್ಟಿನ ವಿಷಯವಾಗಿಯೂ ಆಶಾಭಂಗ ಪಡುವಿರಿ. 37ಅಲ್ಲಿಂದಲೂ ನಿರಾಶೆಯಿಂದ ತಲೆಯ ಮೇಲೆ ಕೈ

ಹೊತ್ತು ಹೊರಡುವಿರಿ. ನೀವು ಯಾರಲ್ಲಿ ನಂಬಿಕೆಯಿಟ್ಟಿದ್ದಿರೋ ಅವರನ್ನು ಸರ್ವೇಶ್ವರನಾದ ನಾನು ನಿರಾಕರಿಸಿದ್ದೇನೆ. ಅವರಿಂದ ನಿಮ್ಮ ಕಾರ್ಯಕೈಗೂಡದು."

### ಇಸ್ರಯೇಲಿನ ವಿಶ್ವಾಸಘಾತ

**3** ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: "ಗಂಡನು ತ್ಯಜಿಸಿದವಳು, ಅವನಿಂದ ಹೊರಟು ಮತ್ತೊಬ್ಬನವಳಾದ
ಮೇಲೆ, ಅವಳನ್ನು ಆ ಗಂಡನು ಮತ್ತೆ ಸೇರಿಸಿಕೊಳ್ಳುತ್ತಾನೆಯೆ? ಸೇರಿಸಿಕೊಂಡರೆ ಆ ನಾಡು ಕೆಟ್ಟು
ಅಪವಿತ್ರವಾಗಿ ಹೋಗುವುದಿಲ್ಲವೇ? ಹೀಗಿರಲು ಓ ಇಸ್ರಯೇಲ್, ಬಹು ಮಂದಿ ಮಿಂಡರೊಡನೆ
ವೇಶ್ಯಾವಾಟಿಕೆ ನಡೆಸಿದ ನೀನು ನನ್ನ ಬಳಿಗೆ ಬರುವೆಯಾ? 2ಕಣ್ಣೆತ್ತಿ ಬೋಳು ಬೆಟ್ಟಗಳನ್ನು ನೋಡು,
ಯಾವುದರಲ್ಲಿ ತಾನೆ ನೀನು ವೇಶ್ಯೆಯಾಗಿ ವರ್ತಿಸಲಿಲ್ಲ? ಅರಬೀಯನು ಅಡವಿಯಲ್ಲಿ ಹೊಂಚು ಹಾಕುವ
ಹಾಗೆ ನೀನು ದಾರಿಯ ಮಗ್ಗುಲಲ್ಲಿ ಅವರಿಗಾಗಿ ಹೊಂಚುಹಾಕುತ್ತಾ ಕುಳಿತಿದ್ದೆ. ನಿನ್ನ ವೇಶ್ಯೆತನದಿಂದಲೂ
ನಿನ್ನ ಕೆಟ್ಟತನದಿಂದಲೂ ನಾಡನ್ನು ಅಪವಿತ್ರ ಮಾಡಿರುವೆ. 3ಆದಕಾರಣವೇ ಹದಮಳೆಗೆ ಅಡ್ಡಿಯಾಯಿತು.
ವಸಂತಕಾಲದ ಮಳೆ ಬರದೆಹೋಯಿತು. ಇನ್ನೂ ನೀನು ವೇಶ್ಯೆ ಮುಖದವಳು, ಲಜ್ಜೆಗೆಟ್ಟವಳು!
4 "ಈಗತಾನೆ, 'ನೀವೆ ನನ್ನ ತಂದೆ, ನನ್ನ ಯೌವನದ ಆಪ್ತರು' ಎಂದು ಕರೆಯುತ್ತಿರುವೆ. 5ನಿತ್ಯಕ್ಕೂ
ಕೋಪ ಮಾಡಬೇಡಿ; ಕೊನೆಯತನಕ ಸಿಟ್ಟುಗೊಳ್ಳಬೇಡಿ' ಎಂದು ಕೋರುತ್ತಿರುವೆ. ಹೀಗೆಲ್ಲ ನೀನು
ಹೇಳುತ್ತಿರುವೆಯಾದರೂ ನಿನ್ನಿಂದ ಸಾಧ್ಯವಾಗುವಷ್ಟು ದುಷ್ಕೃತ್ಯಗಳನ್ನು ಮಾಡಿ ಕೃತಾರ್ಥಳಾಗಿರುವೆ!"

### ಇಸ್ರಯೇಲ್ ಮತ್ತು ಜುದೇಯದ ಪ್ರಾಂತ್ಯಗಳು ಪಶ್ಚಾತ್ತಾಪಪಡಬೇಕು

6 ಅರಸ ಯೋಷೀಯನ ಕಾಲದಲ್ಲಿ ಸರ್ವೇಶ್ವರಸ್ವಾಮಿ ನನಗೆ ಹೀಗೆಂದು ಹೇಳಿದರು – "ಭ್ರಷ್ಟಳಾದ
ಇಸ್ರಯೇಲ್ ಮಾಡಿದ್ದನ್ನು ನೋಡಿದೆಯಾ? ಅವಳು ನನ್ನನ್ನು ತೊರೆದುಬಿಟ್ಟು ಎತ್ತರವಾದ ಗುಡ್ಡಗಳನ್ನೆಲ್ಲ
ಹತ್ತಿ, ಹುಲುಸಾಗಿ ಬೆಳೆದ ಎಲ್ಲ ಮರಗಳ ಕೆಳಗೆ ಹೋಗಿ ವೇಶ್ಯೆಯಂತೆ ವರ್ತಿಸುತ್ತಿದ್ದಾಳೆ. 7ಅವಳು
ಇಂಥವುಗಳನ್ನೆಲ್ಲ ಮಾಡಿದ ಮೇಲೆ ನನ್ನ ಬಳಿಗೆ ಮರಳಿ ಬಂದೇ ಬರುವಳು ಎಂದುಕೊಂಡಿದ್ದೆ. ಆದರೆ
ಬರಲಿಲ್ಲ. ಆಗ ಜುದೇಯವೆಂಬ ದ್ರೋಹಿಯಾದ ಅವಳ ತಂಗಿ ಇದನ್ನು ನೋಡಿದಳು. 8ಭ್ರಷ್ಟಳಾದ
ಇಸ್ರಯೇಲ್ ನನಗೆ ವಿಮುಖಳಾಗಿ ವ್ಯಭಿಚಾರಿಣಿಯಂತೆ ವರ್ತಿಸಿದ ಕಾರಣದಿಂದಲೆ, ನಾನು ಅವಳನ್ನು
ನಿರಾಕರಿಸಿ ವಿವಾಹ ವಿಚ್ಛೇದನ ಪತ್ರ ಕೊಟ್ಟದ್ದನ್ನು ಜುದೇಯವೆಂಬ ದ್ರೋಹಿಯಾದ ಅವಳ ತಂಗಿ
ನೋಡಿಯೂ ಅಂಜದೆ ಹೋದಳು. ತಾನೂ ಹೋಗಿ ವೇಶ್ಯೆಯಂತೆ ವರ್ತಿಸಿದಳು. 9ಕಲ್ಲು ಮರಗಳಿಗೆ
ಆರಾಧನೆ ಮಾಡಿ ವ್ಯಭಿಚಾರಿಣಿಯಾದಳು. ಇದೆಲ್ಲ ಲಘುವೆಂದು ಭಾವಿಸಿ ತನ್ನ ವೇಶ್ಯಾ ವರ್ತನೆಯಿಂದ
ನಾಡನ್ನು ಅಪವಿತ್ರಪಡಿಸಿದಳು. 10ಇಸ್ರಯೇಲಳಿಗೆ ಇಷ್ಟು ದಂಡನೆ ಆದರೂ ಜುದೇಯವೆಂಬ
ದ್ರೋಹಿಯಾದ ಅವಳ ತಂಗಿ ನನ್ನ ಕಡೆಗೆ ಪೂರ್ಣಮನಸ್ಸಿನಿಂದ ತಿರುಗಿಕೊಳ್ಳಲಿಲ್ಲ. ತಿರುಗಿಕೊಂಡಂತೆ
ನಟಿಸಿದಳು ಮಾತ್ರ. ಇದು ಸರ್ವೇಶ್ವರನಾದ ನನ್ನ ನುಡಿ."
11 ಬಳಿಕ ಸರ್ವೇಶ್ವರಸ್ವಾಮಿ ನನಗೆ ಇಂತೆಂದರು–"ಭ್ರಷ್ಟಳಾದ ಇಸ್ರಯೇಲ್ ದ್ರೋಹಿಯಾದ
ಜುದೇಯಳಿಗಿಂತ ಶಿಷ್ಟಳಾಗಿ ಕಂಡು ಬಂದಿದ್ದಾಳೆ. 12ನೀನು ಉತ್ತರ ದಿಕ್ಕಿಗೆ ಹೋಗಿ ಆ ಇಸ್ರಯೇಲಿಗೆ ಈ
ಸಂದೇಶವನ್ನು ಸಾರು–ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ; ಭ್ರಷ್ಟಳಾದ ಇಸ್ರಯೇಲೇ, ಹಿಂದಿರುಗು; ನಾನು
ಅಷ್ಟು ಕೋಪ ಮುಖದಿಂದ ನಿನ್ನನ್ನು ನೋಡುವುದಿಲ್ಲ. ನಾನು ಕರುಣಾಮೂರ್ತಿ, ನಿತ್ಯಕೋಪಿಯಲ್ಲ.
13ನೀನು ನಿನ್ನ ತಪ್ಪನ್ನು ಮಾತ್ರ ಒಪ್ಪಿಕೊ. ಕಂಡ ಕಡೆಯೆಲ್ಲ ಅಲೆದಾಡಿ, ಹುಲುಸಾಗಿ ಬೆಳೆದ ಪ್ರತಿಯೊಂದು
ಮರದ ಕೆಳಗೆ ಅನ್ಯದೇವರುಗಳನ್ನು ಸೇರಿ, ನನ್ನ ಮಾತುಗಳನ್ನು ಕೇಳದೆ, ನಿನ್ನ ದೇವರಾದ ಸರ್ವೇಶ್ವರ
ಎಂಬ ನನಗೇ ದ್ರೋಹ ಮಾಡಿರುವೆ ಎಂಬುದನ್ನು ಒಪ್ಪಿಕೊ.
14 "ಭ್ರಷ್ಟರಾದ ಜನರೇ, ನನಗೆ ಅಭಿಮುಖರಾಗಿರಿ, ನಾನು ನಿಮಗೆ ಅಧಿಪತಿ. ನಿಮ್ಮಲ್ಲಿ ಒಂದು
ಪಟ್ಟಣಕ್ಕೆ ಒಬ್ಬನಂತೆ, ಗೋತ್ರಕ್ಕೆ ಇಬ್ಬರಂತೆ ಆರಿಸಿ ಸಿಯೋನಿಗೆ ಕರೆತರುವೆನು. 15ಇದಲ್ಲದೆ ನನ್ನ ಮನಸ್ಸು
ಒಪ್ಪುವ ಪಾಲಕರನ್ನು ನಿಮಗೆ ಕೊಡುವೆನು. ಅವರು ನಿಮ್ಮನ್ನು ಜ್ಞಾನವಿವೇಕಗಳಿಂದ ಪೋಷಿಸುವರು.

16ನೀವು ನಾಡಿನಲ್ಲಿ ಹೆಚ್ಚಿ ಅಭಿವೃದ್ಧಿಯಾದಾಗ, 'ಸರ್ವೇಶ್ವರನ ಒಡಂಬಡಿಕೆಯ ಮಂಜೂಷವೆಲ್ಲಿ?' ಎಂದು ಪ್ರಸ್ತಾಪಿಸುವಂತಿಲ್ಲ. ಅದು ಜ್ಞಾಪಕಕ್ಕೆ ಬರುವುದಿಲ್ಲ, ಯಾರೂ ಅದನ್ನು ಸ್ಮರಿಸುವುದಿಲ್ಲ. ಅದು ಇಲ್ಲವಲ್ಲಾ ಎಂದು ದುಃಖಿಸುವುದಿಲ್ಲ. ಹೊಸದೊಂದನ್ನು ಕಲ್ಪಿಸಿಕೊಳ್ಳುವುದಿಲ್ಲ. ಇದು ಸರ್ವೇಶ್ವರನಾದ ನನ್ನ ನುಡಿ.
17ಆ ಕಾಲ ಬಂದಾಗ ಜೆರುಸಲೇಮನ್ನೇ 'ಸರ್ವೇಶ್ವರನ ಸಿಂಹಾಸನ' ಎಂದು ಕರೆಯುವರು. ನನ್ನ ನಾಮಮಹತ್ವದ ಸ್ಥಾನವಾದ ಜೆರುಸಲೇಮಿಗೆ ಸಕಲ ರಾಷ್ಟ್ರಗಳವರು ನೆರೆದುಬರುವರು. ಆಮೇಲೆ ತಮ್ಮ ದುಷ್ಟ ಹೃದಯದ ನಿಮಿತ್ತ ಹಟಮಾರಿಗಳಂತೆ ನಡೆಯಲಾರರು. 18ಆ ಕಾಲದಲ್ಲಿ ಜುದೇಯ ವಂಶವು
ಇಸ್ರಯೇಲ್ ವಂಶದೊಡನೆ ಜೊತೆಯಾಗಿ ಬಾಳುವುದು. ಈ ಎರಡು ವಂಶಗಳೂ ಉತ್ತರ ಪ್ರಾಂತ್ಯವನ್ನು ಬಿಟ್ಟು ನಾನು ನಿಮ್ಮ ಪೂರ್ವಜರಿಗೆ ಬಾಧ್ಯವಾಗಿ ಕೊಟ್ಟ ನಾಡಿಗೆ ಬರುವುವು."

**ದೇವಜನರಿಂದ ವಿಗ್ರಹಾರಾಧನೆ**

19 ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: "ಎಲೈ ಇಸ್ರಯೇಲ್, ನಾನು ಎಷ್ಟೋ ಆದರದಿಂದ ನಿನ್ನನ್ನು ನನ್ನ ಪುತ್ರನೆಂದು ಭಾವಿಸಿ, ನಿನಗೆ ಮನೋಹರವಾದ ನಾಡನ್ನು, ಅಂದರೆ, ಸಮಸ್ತ ರಾಷ್ಟ್ರಗಳಲ್ಲಿ ರಮಣೀಯವಾದ ಸೊತ್ತನ್ನು ಕೊಡಬೇಕು ಎಂದುಕೊಂಡಿದ್ದೆ. ನೀನು ನನ್ನನ್ನು 'ತಂದೆ' ಎಂದು ಸನ್ಮಾನಿಸಿ, ನನ್ನನ್ನು ತಪ್ಪದೆ ಹಿಂಬಾಲಿಸಿ ಬರುವೆಯೆಂದಿದ್ದೆ.

20 "ಆದರೆ ಓ ಇಸ್ರಯೇಲ್ ವಂಶಜರೇ, ಒಬ್ಬ ಹೆಂಗಸು ಪತಿದ್ರೋಹ ಮಾಡಿದಂತೆ ನೀವು ನನಗೆ ದ್ರೋಹಮಾಡಿರುವುದು ನಿಶ್ಚಯ. ಇದು ಸರ್ವೇಶ್ವರನಾದ ನನ್ನ ನುಡಿ."

21 ಇಗೋ ಕೇಳಿ, ಬೋಳು ಗುಡ್ಡಗಳ ಮೇಲಿಂದ ಒಂದು ಶಬ್ದ: 'ನಾವು ಡೊಂಕುದಾರಿಯನ್ನು ಹಿಡಿದಿದ್ದೇವೆ. ನಮ್ಮ ದೇವರಾದ ಸರ್ವೇಶ್ವರಸ್ವಾಮಿಯನ್ನು ಮರೆತುಬಿಟ್ಟಿದ್ದೇವೆ' ಎಂದು ಇಸ್ರಯೇಲರು ಕಣ್ಣೀರು ಸುರಿಸುತ್ತಾ ದೇವರ ಕೃಪೆಯನ್ನು ಬೇಡುತ್ತಿದ್ದಾರೆ.

22 ಸರ್ವೇಶ್ವರ: "ಭ್ರಷ್ಟರಾದ ಜನರೇ, ಹಿಂದಿರುಗಿ ಬನ್ನಿ, ನಾನು ನಿಮ್ಮ ಭ್ರಷ್ಟತನವನ್ನು ಪರಿಹರಿಸುವೆನು."

23 ಜನರು: "ಇಗೋ, ನಿಮಗೆ ಅಭಿಮುಖರಾಗಿ ಬಂದಿದ್ದೇವೆ. ನೀವೇ ನಮ್ಮ ಸರ್ವೇಶ್ವರ, ನಮ್ಮ ದೇವರು. ನಿಶ್ಚಯವಾಗಿ ಬೆಟ್ಟಗುಡ್ಡಗಳಿಂದಲೂ ಜಾತ್ರೆಜಂಗುಳಿಯಿಂದಲೂ ನಮಗೆ ಮೋಸವಾಯಿತು. ಇಸ್ರಯೇಲಿನ ಉದ್ಧಾರ ಇರುವುದು ನಮ್ಮ ದೇವರಾದ ಸರ್ವೇಶ್ವರಸ್ವಾಮಿಯ ಕೈಯಲ್ಲೇ, ಇದು ಸತ್ಯಕ್ಕೂ
ಸತ್ಯ. 24ನಾವು ಚಿಕ್ಕಂದಿನಿಂದ ನೋಡಿರುವಂತೆ ನಮ್ಮ ಪಿತೃಗಳು ದುಡಿದದ್ದನ್ನೂ ಅವರ ದನಕುರಿಗಳನ್ನೂ
ಅವರ ಗಂಡುಹೆಣ್ಣುಮಕ್ಕಳನ್ನೂ ಬಾಳ್ ದೇವತೆ ಕಬಳಿಸುತ್ತಾ ಬಂದಿದೆ. 25ನಾವೇ ತಂದುಕೊಂಡ
ಅವಮಾನವೆಂಬ ಹಾಸಿಗೆಯಲ್ಲಿ ಬಿದ್ದಿರೋಣ. ನಾಚಿಕೆಯೆಂಬ ಹೊದಿಕೆ ನಮ್ಮನ್ನು ಮುಚ್ಚಿ ಬಿಡಲಿ. ಚಿಕ್ಕತನದಿಂದ ಈವರೆಗು ನಾವೂ ನಮ್ಮ ಪೂರ್ವಜರೂ ನಮ್ಮ ದೇವರಾದ ಸರ್ವೇಶ್ವರಸ್ವಾಮಿಗೆ ಇದಿರಾಗಿ ಪಾಪಮಾಡುತ್ತಾ ಬಂದಿರುವುದು ನಿಶ್ಚಯ. ಆ ಸ್ವಾಮಿಯ ಮಾತನ್ನು ಕೇಳದೆ ಹೋದೆವಲ್ಲಾ!" ಎಂದು ಮೊರೆಯಿಡುತ್ತಿದ್ದಾರೆ.

**ಪಶ್ಚಾತ್ತಾಪಕ್ಕೆ ಕರೆ**

**4** ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: "ಇಸ್ರಯೇಲಿನ ಜನರೇ, ನೀವು ಹಿಂದಿರುಗುವಿರಾದರೆ ನನ್ನ ಬಳಿಗೆ ಬನ್ನಿ. ಅಸಹ್ಯವಾದ ನಿಮ್ಮ ಮೂರ್ತಿ ಪೂಜಾವಸ್ತುಗಳನ್ನು ನನ್ನ ಕಣ್ಣೆದುರಿನಿಂದ ತೆಗೆದುಬಿಡಿ. ಆಗ ನೀವು
ಅತ್ತಿತ್ತ ತೂರಾಡಲಾರಿರಿ. 2'ಸರ್ವೇಶ್ವರಸ್ವಾಮಿಯ ಜೀವದಾಣೆ' ಎಂದು ಸತ್ಯ, ನ್ಯಾಯ, ನೀತಿಗೆ ಅನುಗುಣವಾಗಿ ಪ್ರಮಾಣಮಾಡಿರಿ, ಆಗ ರಾಷ್ಟ್ರಗಳೆಲ್ಲ ನನ್ನಿಂದ ಆಶೀರ್ವಾದ ಪಡೆಯಲು ಆಶಿಸುವರು, ನನ್ನಲ್ಲೇ ಹೆಮ್ಮೆಪಡುವರು."

3 ಜುದೇಯದವರಿಗೂ ಜೆರುಸಲೇಮಿನವರಿಗೂ ಸರ್ವೇಶ್ವರ ಹೇಳುವುದೇನೆಂದರೆ – "ಪಾಳುಬಿದ್ದ ನಿಮ್ಮ ಹೊಲಗದ್ದೆಗಳನ್ನು ಉತ್ತು ಹದಮಾಡಿ. ಮುಳ್ಳುಗಳ ನಡುವೆ ಬಿತ್ತಬೇಡಿ. 4ಜುದೇಯದವರೇ,

ಜೆರುಸಲೇಮಿನ ನಿವಾಸಿಗಳೇ, ಸರ್ವೇಶ್ವರನಾದ ನನಗಾಗಿ ಸುನ್ನತಿಯಾಗಿರಿ. ನಿಮ್ಮ ಹೃದಯದ ಮುಂದೊಗಲನ್ನು ತೆಗೆದು ಹಾಕಿರಿ. ಇಲ್ಲವಾದರೆ ನಿಮ್ಮ ಪಾಪಾಕ್ರಮಗಳ ನಿಮಿತ್ತ ನನ್ನ ಕೋಪಾಗ್ನಿಯು ಭುಗಿಲೆದ್ದು ಆರಿಸಲಾಗದಷ್ಟು ಧಗಧಗಿಸುವುದು."

## ಶತ್ರುವಿನಿಂದ ಜುದೇಯದ ಆಕ್ರಮಣ

5 ಜುದೇಯದಲ್ಲಿ ಸಾರಿರಿ; ಜೆರುಸಲೇಮಿನಲ್ಲಿ ಪ್ರಕಟಿಸಿರಿ. ನಾಡಿನಲ್ಲೆಲ್ಲ ಕೊಂಬೂದೂತ್ತಾ ಆಜ್ಞಾಪಿಸಿರಿ. 'ಕೂಡಿಬನ್ನಿ, ಕೋಟೆಕೊತ್ತಲಗಳುಳ್ಳ ಊರುಗಳನ್ನು ಸೇರಿಕೊಳ್ಳೋಣ' ಎಂದು ಕೂಗಿ ಹೇಳಿರಿ.
6 ಸಿಯೋನಿನ ಕಡೆಗೆ ಧ್ವಜವನ್ನೆತ್ತಿರಿ. ತಡಮಾಡದೆ ವಲಸೆ ಹೋಗಿರಿ. ಸರ್ವೇಶ್ವರ ಉತ್ತರದಿಂದ ವಿಪತ್ತನ್ನೂ ಘೋರ ನಾಶವನ್ನೂ ಬರಮಾಡುವರು.

7 ಗುಹೆಬಿಟ್ಟು ಹೊರಟುಬರುವ ಸಿಂಹದಂತೆ ರಾಷ್ಟ್ರಗಳ ವಿನಾಶಕನೊಬ್ಬನು ಎದ್ದಿದ್ದಾನೆ; ಹೊರಟು ಬರುತ್ತಿದ್ದಾನೆ. ಅವನು ಜುದೇಯ ನಾಡನ್ನು ಹಾಳುಮಾಡುವನು. ಅದರ ಪಟ್ಟಣಗಳು ನಿರ್ಜನ ಪ್ರದೇಶಗಳಾಗುವುವು.

8 ಈ ನಿಮಿತ್ತ ಗೋಣಿತಟ್ಟನ್ನು ಸುತ್ತಿಕೊಳ್ಳಿರಿ, ಅತ್ತುಗೋಳಾಡಿರಿ. ಸರ್ವೇಶ್ವರಸ್ವಾಮಿಯ ಕೋಪ ಅಗ್ನಿಯು ಜುದೇಯವನ್ನು ಬಿಟ್ಟುಹೋಗಿಲ್ಲ.

9 ಸರ್ವೇಶ್ವರಸ್ವಾಮಿ ಹೀಗೆಂದರು – "ಆ ದಿನದಂದು ಅರಸರು ಎದೆಗುಂದುವರು, ಅಧಿಪತಿಗಳ ಹೃದಯ ಕುಗ್ಗುವುದು. ಯಾಜಕರು ಸ್ತಬ್ಧರಾಗುವರು; ಪ್ರವಾದಿಗಳು ನಿಬ್ಬೆರಗಾಗುವರು."

10 ಆಗ ನಾನು "ಅಯ್ಯೋ, ಸ್ವಾಮಿ ಸರ್ವೇಶ್ವರಾ, ನೀವು ನಿಶ್ಚಯವಾಗಿಯೂ ಈ ಜನರನ್ನು ಹಾಗೂ ಜೆರುಸಲೇಮಿನವರನ್ನು ಮೋಸಗೊಳಿಸಿದ್ದೀರಿ. 'ನಿಮಗೆ ಸಮಾಧಾನವಾಗುವುದು' ಎಂದು ಅವರಿಗೆ ಹೇಳಿದಿರಿ, ಆದರೆ ಕತ್ತಿ ಅವರ ಕುತ್ತಿಗೆಗೆ ಬಂದಿದೆ" ಎಂದೆನು.

11 ಆ ದಿನ ಬಂದಾಗ ಈ ಜನರಿಗೂ ಜೆರುಸಲೇಮಿಗೂ ಈ ಮಾತುಗಳನ್ನು ತಿಳಿಸಲಾಗುವುದು: ಬಿಸಿಗಾಳಿ ಒಣಗಾಡಿನ ಗುಡ್ಡಗಳಿಂದ ಬೀಸಿ ದೇವಪ್ರಜೆಯೆಂಬ ಯುವತಿಯ ಮೇಲೆ ಬೀಸುವುದು. ಅದು ಹೊಟ್ಟನ್ನು ತೂರುವುದಕ್ಕೆ ಅಲ್ಲ, ಕಾಳನ್ನು ಶೋಧಿಸುವುದಕ್ಕೆ ಅಲ್ಲ.
12ಸರ್ವೇಶ್ವರನ ಆಜ್ಞೆಯ ಮೇರೆಗೆ ಬರುವ ಆ ಗಾಳಿ ಬಿರುಸಾಗಿ ಬಡಿಯುವುದು. ತಮ್ಮ ಜನರಿಗೆ ನ್ಯಾಯ ದಂಡನೆಯನ್ನು ಸ್ವಾಮಿ ಸರ್ವೇಶ್ವರನೇ ವಿಧಿಸುವರು.

## ಜುದೇಯದ ಸುತ್ತಲೂ ಶತ್ರುಗಳು

13 ಮೇಘಗಳೋಪಾದಿಯಲ್ಲಿ ಶತ್ರು ಬರುತ್ತಿರುವುದನ್ನು ನೋಡು. ಅವನ ರಥಗಳು ಬಿರುಗಾಳಿಯಂತೆ! ಅವನ ಕುದುರೆಗಳು ರಣಹದ್ದುಗಳಂತೆ! ಅಯ್ಯೋ ನಮಗೆ ಕೇಡು, ಇನ್ನು ನಮ್ಮ ಗತಿ ಮುಗಿಯಿತು!

14 ಜೆರುಸಲೇಮ್, ನೀನು ತಪ್ಪಿಸಿಕೊಳ್ಳಬೇಕಾದರೆ ನಿನ್ನ ಹೃದಯದಲ್ಲಿರುವ ಕೆಟ್ಟತನವನ್ನು ತೊಳೆದುಬಿಡು. ದುರಾಲೋಚನೆಗಳನ್ನು ನಿನ್ನ ಮನದಲ್ಲಿ ಇನ್ನೆಷ್ಟರವರೆಗೆ ಇಟ್ಟುಕೊಂಡಿರುವೆ?

15 ದಾನ್ ನಗರದಿಂದ ಪ್ರಕಟಣೆಯ ಧ್ವನಿ ಕೇಳಿ ಬರುತ್ತದೆ. ಎಫ್ರಯಿಮಿನ ಬೆಟ್ಟದಿಂದ ಕೇಡನ್ನು
ಸಾರಲಾಗುತ್ತದೆ. 16ಇಗೋ ಅವರು ರಾಷ್ಟ್ರಗಳಿಗೆ ಅರುಹಿಸುವ ಸಮಾಚಾರ: ಮುತ್ತಿಗೆ ಹಾಕುವವರು ದೂರದೇಶದಿಂದ ಜೆರುಸಲೇಮಿಗೆ ಬರುವರು. ಜುದೇಯದ ಪಟ್ಟಣಗಳಿಗೆ ವಿರುದ್ಧ ಘೋಷಣೆಗಳನ್ನು
ಪ್ರಕಟಿಸುವರು. 17ಹೊಸ ಕಾಯುವವರಂತೆ ಅದನ್ನು ಸುತ್ತುಗಟ್ಟುವರು. ಏಕೆಂದರೆ ಅದರ ಜನರು ಸರ್ವೇಶ್ವರಸ್ವಾಮಿಗೇ ತಿರುಗಿಬಿದ್ದಿದ್ದಾರೆ. ಇದು ಆ ಸ್ವಾಮಿಯ ನುಡಿ.

18 ಜುದೇಯ ನಾಡೇ, ನಿನ್ನ ನಡತೆ ಹಾಗೂ ಕೃತ್ಯಗಳೇ ನಿನಗೆ ಈ ವಿಪತ್ತನ್ನು ಒದಗಿಸಿವೆ. ಇದು ನಿನ್ನ ಪಾಪದ ಪ್ರತಿಫಲ. ನೋಡು ಎಷ್ಟು ಕಹಿಯಾಗಿದೆ; ಹೃದಯ ಇರಿಯುವಂತಿದೆ.

### ತನ್ನ ಜನತೆಗಾಗಿ ಯೆರೆಮೀಯನು ಅನುಭವಿಸಿದ ದುಃಖ

19 ಅಯ್ಯೋ, ನನ್ನ ಕರುಳು ಯಾತನೆಯಿಂದ ಕಿತ್ತುಬರುವಂತಿದೆ. ಅಕಟಾ! ನನ್ನ ಗುಂಡಿಗೆಯ
ಪಕ್ಕೆಗಳು ಸೀಳುವಂತಿದೆ, ಹೃದಯ ತಳಮಳಗೊಂಡಿದೆ!

ಇನ್ನು ಬಾಯಿಮುಚ್ಚಿಕೊಂಡಿರಲು
ನನ್ನಿಂದಾಗದು;
ನನ್ನ ಮನವೇ, ಕಾಳಗದ ಕಹಳೆಯನ್ನೂ
ಯುದ್ಧದ ಕೋಲಾಹಲವನ್ನೂ
ಕೇಳುತ್ತಿರುವೆ, ಅಲ್ಲವೆ?
20 ನಾಶನದ ಮೇಲೆ ನಾಶನದ ಸುದ್ದಿ, ನಾಡೆಲ್ಲ
ಕಾಡಾಯಿತು.
ದಿಢೀರೆಂದು ನಮ್ಮ ಗುಡಾರಗಳು,
ಕ್ಷಣಮಾತ್ರದಲ್ಲಿ ನಮ್ಮ ಡೇರೆಗಳು
ತುಂಡುತುಂಡಾದವು!
21 ಎಷ್ಟರವರೆಗೆ ನಾನು ಯುದ್ಧಪತಾಕೆಗಳನ್ನು
ನೋಡುತ್ತಿರಲಿ!
ಯುದ್ಧ ಕಹಳೆಗಳು ಮೊಳಗುವುದನ್ನು
ಕೇಳುತ್ತಿರಲಿ!
22 ಸರ್ವೇಶ್ವರ ಹೀಗೆನ್ನುತ್ತಾರೆ:
ನನ್ನ ಜನರು ಮೂರ್ಖರು, ನನ್ನನ್ನು ತಿಳಿಯರು.
ಪೆದ್ದ ಮಕ್ಕಳು, ಬುದ್ಧಿಯಿಲ್ಲದವರು
ಕೇಡು ಮಾಡುವುದರಲ್ಲಿ ಪ್ರವೀಣರು
ಒಳಿತನ್ನು ಮಾಡಲು ಅರಿಯರು.

### ಬರಲಿರುವ ವಿನಾಶದ ದೃಶ್ಯ

23 ನಾನು ಭೂಮಿಯನ್ನು ನೋಡಿದೆ, ಅದು ಬಿಕೋ
ಎನ್ನುತ್ತಿತ್ತು.
ಆಕಾಶವನ್ನು ದಿಟ್ಟಿಸಿದೆ, ಅದರಲ್ಲಿ ಬೆಳಕೇ
ಇರಲಿಲ್ಲ.
24 ಬೆಟ್ಟಗಳನ್ನು ನೋಡಿದೆ, ಅವು
ನಡುನಡುಗುತ್ತಿದ್ದವು.
ಗುಡ್ಡ ದಿಣ್ಣೆಗಳೂ ಅಲ್ಲೋಲಕಲ್ಲೋಲ
ವಾಗಿದ್ದವು.
25 ಕಣ್ಣೆತ್ತಿ ನೋಡಿದೆ, ಏನಾಶ್ಚರ್ಯ! ಆನ
ರೊಬ್ಬರೂ ಇಲ್ಲ,
ಆಕಾಶದ ಪಕ್ಷಿಗಳೆಲ್ಲವೂ ಕಾಣೆಯಾಗಿದ್ದವು.
26 ಇನ್ನೂ ನೋಡಿದೆ – ಸೊಂಪಾದ ನಾಡುಈಗ
ಸುಡುಗಾಡು
ಅಕಟಾ! ಸರ್ವೇಶ್ವರನ ಮುಂದೆ,
ಅವರ ಕೋಪಾಗ್ನಿಯ ಮುಂದೆ
ಊರುಗಳೆಲ್ಲವು ಪಾಳು ಬಿದ್ದಿದ್ದವು.

27 ಸರ್ವೇಶ್ವರಸ್ವಾಮಿ ಹೀಗೆಂದಿದ್ದಾರೆ:
ನಾಡೆಲ್ಲ ಬಟ್ಟಬರಿದಾಗುವುದು;
ಆದರೆ ನಾನು ಅದನ್ನು ಸಂಪೂರ್ಣವಾಗಿ
ಲಯಮಾಡುವುದಿಲ್ಲ.
28 ಲೋಕ ದುಃಖಿಸುವುದು
ಆಕಾಶ ಕಪ್ಪಾಗುವುದು
ಇದು ಸರ್ವೇಶ್ವರ ಆಡಿದ ಮಾತು.
ಇದನ್ನು ಬದಲಾಯಿಸುವಂತಿಲ್ಲ.
ಇದು ಅವರ ತೀರ್ಮಾನ; ಇದನ್ನು
ರದ್ದುಗೊಳಿಸುವಂತಿಲ್ಲ.
29 ರಾಹುತರ ಹಾಗೂ ಬಿಲ್ಲುಗಾರರ ಅಬ್ಬರಕ್ಕೆ
ಓಡುತ್ತಿರುವರು ಪಟ್ಟಣಿಗರೆಲ್ಲರು
ಇತ್ತ ಪೊದೆಗಳಲ್ಲಿ ಅವಿತುಕೊಳ್ಳುತ್ತಾರೆ.
ಅತ್ತ ಬಂಡೆಗಳನ್ನು ಹತ್ತುತ್ತಿದ್ದಾರೆ.
ಪ್ರತಿಯೊಂದು ಪಟ್ಟಣ ಪಾಳುಬಿದ್ದ ಬೀಡು
ಅದರಲ್ಲಿ ಮತ್ತೆ ವಾಸಮಾಡುವವರು ಒಬ್ಬರೂ
ಇಲ್ಲ.
30 ಎಲೈ ಜೆರುಸಲೇಮ್, ಸೂರೆಯಾಗುವಾಗ ಏನು
ಮಾಡುವೆ?
ಪಟ್ಟದ ಬಟ್ಟೆಗಳನ್ನು ಉಟ್ಟುಕೊಂಡು
ಚಿನ್ನದ ಒಡವೆಗಳನ್ನು ತೊಟ್ಟುಕೊಂಡು
ಕಾಡಿಗೆಯಿಂದ ಕಣ್ಣುಗಳನ್ನು ಅಗಲಿಸಿಕೊಂಡು
ಶೃಂಗರಿಸಿಕೊಂಡರೆ ಏನು ಪ್ರಯೋಜನ?
ಎಲ್ಲವೂ ವ್ಯರ್ಥ!
ನಿನ್ನ ಮಿಂಡರೇ ನಿನ್ನನ್ನು ತಿರಸ್ಕರಿಸಿ
ನಿನ್ನ ಪ್ರಾಣಹುಡುಕುವರು.
31 ಸಿಯೋನ್ ನಗರಿ ಪ್ರಸವವೇದನೆ ಪಡುವವಳಂತೆ
ಚೊಚ್ಚಲ ಹೆರಿಗೆಯ ವೇದನೆಯನ್ನು
ಅನುಭವಿಸುವವಳಂತೆ
ಕಿರಿಚಿಕೊಳ್ಳುವ ಕೂಗನ್ನು ನಾನು ಕೇಳಿದ್ದೇನೆ.
ಉಬ್ಬಸಪಡುತ್ತಾ ಎರಡು ಕೈಗಳನ್ನೂ ಚಾಚಿ
'ಅಯ್ಯೋ ನನಗೆ ಕೇಡು, ಕೊಲೆಗಡುಕನ ಮುಂದೆ
ನನ್ನ ಪ್ರಾಣ ಉಡುಗುತ್ತಿದೆ' ಎಂದು
ಅರುಚಿಕೊಳ್ಳುತ್ತಿಹಳು.

### ಜೆರುಸಲೇಮಿನವರ ಪಾಪಾಕ್ರಮಗಳು

**5** ಜೆರುಸಲೇಮಿನ ಜನರೇ,
ಬೀದಿಗಳಲ್ಲಿ ಅತ್ತಿತ್ತ ಓಡಾಡಿ ನೋಡಿ
ಅಲ್ಲಿನ ಚೌಕಗಳಲ್ಲಿ ಹುಡುಕಾಡಿ ನೋಡಿ.

ನೀತಿಯನ್ನು ಕೈಗೊಂಡು ಸತ್ಯವನ್ನರಸುವವನು
ಒಬ್ಬನಾದರೂ ಇದ್ದಾನೆಯೇ?
ಅಂಥ ಸತ್ಪುರುಷ ಸಿಕ್ಕುತ್ತಾನೆಯೆ ಎಂಬುದನ್ನು
ನೀವೇ ನಿಶ್ಚಯಿಸಿರಿ;
ಸಿಕ್ಕಿದ್ದೇ ಆದರೆ ಸರ್ವೇಶ್ವರಸ್ವಾಮಿ
ಆ ನಗರವನ್ನು ಕ್ಷಮಿಸುವರು.
2 ನೀವು 'ಸರ್ವೇಶ್ವರನ ಜೀವದಾಣೆ'
ಎಂದು ಪ್ರಮಾಣ ಮಾಡಿದರೂ
ಆ ಪ್ರಮಾಣ ಸುಳ್ಳೇ ಸುಳ್ಳು ಎನ್ನುತ್ತಾರೆ
ಸರ್ವೇಶ್ವರ.
3 ಸ್ವಾಮಿ ಸರ್ವೇಶ್ವರನ ಕಣ್ಣು ನಾಟಿರುವುದು
ಸತ್ಯದ ಮೇಲೆ.
ಅವರು ದಂಡಿಸಿದರೂ ನೀವು ಪಶ್ಚಾತ್ತಾಪ
ಪಡಲಿಲ್ಲ.
ಅವರು ನಸುಕಿದರೂ ನೀವು ತಿದ್ದುಕೊಳ್ಳಲು
ಒಪ್ಪಲಿಲ್ಲ.
ನಿಮ್ಮ ಮುಖವನ್ನು ಕಲ್ಲಿಗಿಂತ ಕಠಿಣ
ಮಾಡಿಕೊಂಡಿರಿ.
ಅವರಿಗೆ ಅಭಿಮುಖರಾಗಲು ಸಮ್ಮತಿಸದೆ
ಹೋದಿರಿ.
4 ಹೀಗಿರಲು ನಾನು, "ಈ ಜನರು ಬಡವರು,
ಮೂಢರು,
ಸರ್ವೇಶ್ವರನ ಮಾರ್ಗವನ್ನೂ ದೇವರ
ನ್ಯಾಯವಿಧಿಗಳನ್ನೂ ತಿಳಿಯದವರು.
5 ಆದುದರಿಂದ ಗಣ್ಯವ್ಯಕ್ತಿಗಳ ಬಳಿಗೆ ಹೋಗಿ
ಮಾತಾಡುವೆನು;
ಅವರು ಸರ್ವೇಶ್ವರನ ಮಾರ್ಗ ಹಾಗೂ
ಅವರ ದೇವರ ನ್ಯಾಯವಿಧಿಗಳನ್ನು
ಬಲ್ಲವರು," ಎಂದುಕೊಂಡೆನು.
ಆದರೆ ಆ ವ್ಯಕ್ತಿಗಳು ಕೂಡ ನೊಗವನ್ನು
ಮುರಿದವರು,
ಕಣ್ಣಿಗಳನ್ನು ಕಿತ್ತುಬಿಟ್ಟವರು.
6 ಆದಕಾರಣ ಅಡವಿಯ ಸಿಂಹ ಅವರನ್ನು
ಕೊಲ್ಲುವುದು
ಕಾಡಿನ ತೋಳ ಕೊಳ್ಳೆಹೊಡೆಯುವುದು
ಚಿರತೆ ಅವರ ಪಟ್ಟಣಗಳಿಗೆ
ಹೊಂಚುಹಾಕುವುದು
ಅಲ್ಲಿಂದ ಹೊರಬರುವ ಪ್ರತಿಯೊಬ್ಬನನ್ನು
ಸೀಳುವುದು.
ಅವರ ಅಪರಾಧಗಳೋ ಬಹಳ,

ಅವರ ದ್ರೋಹಗಳೋ ಅಪಾರ!
7 ಸರ್ವೇಶ್ವರಸ್ವಾಮಿ ಹೀಗೆಂದು ಪ್ರಶ್ನಿಸುತ್ತಾರೆ:
"ಎಲೈ ಜೆರುಸಲೇಮ್, ನಾನು ನಿನ್ನನ್ನು
ಹೇಗೆ ಕ್ಷಮಿಸಲಿ?
ನಿನ್ನ ಜನರು ನನ್ನನ್ನು ತೊರೆದುಬಿಟ್ಟಿದ್ದಾರೆ;
ದೇವರಲ್ಲದವುಗಳ ಮೇಲೆ ಆಣೆಯಿಟ್ಟಿದ್ದಾರೆ.
ನಾನು ಅವರಿಗೆ ಹೊಟ್ಟೆತುಂಬ ಊಟಕೊಟ್ಟೆ;
ಅವರೋ ವ್ಯಭಿಚಾರ ಮಾಡಿದ್ದಾರೆ,
ವೇಶ್ಯೆಯರ ಮನೆಗಳಲ್ಲಿ ಗುಂಪು ಸೇರಿದ್ದಾರೆ!
8 ಅತ್ತಿತ್ತ ಓಡಾಡುವ ಕೊಬ್ಬಿದ ಕುದುರೆಗಳಂತೆ
ಅವರಲ್ಲಿ ಪ್ರತಿಯೊಬ್ಬನೂ ಕೆನೆಯುತ್ತಾನೆ
ತನ್ನ ನೆರೆಯವನ ಹೆಂಡತಿಯನ್ನು ನೋಡಿ!
9 ಇವುಗಳ ನಿಮಿತ್ತ ನಾನು ದಂಡಿಸಬಾರದೋ?
ಇಂಥ ಜನತೆಯ
ನನ್ನ ಕೋಪವನ್ನು ತೀರಿಸದಿರುವೆನೋ?
10 ಆಕ್ರಮಣಕಾರರಿಗೆ ಕರೆ:
ಸಿಯೋನೆಂಬ ದ್ರಾಕ್ಷಾತೋಟದ
ಸಾಲುಗಿಡಗಳನ್ನು ಹಾಳುಮಾಡಿ.
ಆದರೆ ಅದನ್ನು ನಿರ್ಮೂಲಮಾಡಬೇಡಿ.
ಅದರ ರೆಂಬೆಗಳನ್ನು ಕಿತ್ತುಹಾಕಿ.
ಅವು ಸರ್ವೇಶ್ವರನಾದ ನನಗೆ ಸೇರಿದವುಗಳಲ್ಲ.
11 ಇಸ್ರಯೇಲ್ ವಂಶದವರೂ
ಜುದೇಯ ವಂಶದವರೂ
ನನಗೆ ಬಹಳವಾಗಿ ದ್ರೋಹವೆಸಗಿದ್ದಾರೆ.
ಇದು ಸರ್ವೇಶ್ವರನಾದ ನನ್ನ ನುಡಿ."

**ದೇವರಿಂದ ಇಸ್ರಯೇಲ್ ತಿರಸ್ಕೃತ**

12 ಆ ಜನರು ಸರ್ವೇಶ್ವರಸ್ವಾಮಿಯನ್ನು ಅಲ್ಲಗಳೆದಿದ್ದಾರೆ. "ಆತ ಏನು ಮಾಡಿಯಾನು? ನಮಗೆ
ಕೇಡು ಬರುವುದೂ ಇಲ್ಲ, ಖಡ್ಗವಾಗಲಿ, ಕ್ಷಾಮವಾಗಲಿ ನಮ್ಮ ಕಣ್ಣಿಗೆ ಬೀಳುವುದೂ ಇಲ್ಲ.
13ಪ್ರವಾದಿಗಳು
ಆಡುವುದೆಲ್ಲ ಬರೀ ಗಾಳಿಮಾತುಗಳು. ದೈವೋಕ್ತಿಯೆಂಬುದು ಅವುಗಳಲ್ಲಿ ಇಲ್ಲ. ಅವರಿಗೇ ತಗಲಲಿ ಅವರು
ಹೇಳುವುದೆಲ್ಲ," ಎಂದುಕೊಂಡಿದ್ದಾರೆ.
14ಆದುದರಿಂದ ಸೇನಾಧೀಶ್ವರ ಸರ್ವೇಶ್ವರ ಆದ ದೇವರು
ಯೆರೆಮೀಯನಿಗೆ ಹೀಗೆಂದರು: "ಇಗೋ, ಅವರು ಹೀಗೆ ಮಾತಾಡಿದ್ದರಿಂದ ನಿನ್ನ ಬಾಯಲ್ಲಿನ ನನ್ನ
ಮಾತುಗಳನ್ನು ಬೆಂಕಿಯನ್ನಾಗಿಸುವೆನು; ಆ ಜನರನ್ನು ಅದಕ್ಕೆ ಸೌದೆಯನ್ನಾಗಿಸುವೆನು; ಆ ಬೆಂಕಿ ಅವರನ್ನು
ಸುಟ್ಟುಹಾಕುವುದು.

15 ಇಸ್ರಯೇಲ್ ವಂಶವೇ, ಸರ್ವೇಶ್ವರ ಸ್ವಾಮಿಯ ಮಾತನ್ನು ಗಮನದಿಂದ ಕೇಳು: "ನಾನು ಒಂದು
ರಾಷ್ಟ್ರವನ್ನು ದೂರದಿಂದ ನಿನ್ನ ವಿರುದ್ಧ ಬರಮಾಡುವೆನು. ಅದು ಪ್ರಾಚೀನ ಹಾಗೂ ಪ್ರಬಲ ರಾಷ್ಟ್ರ. ಅದರ
ಭಾಷೆ ನಿನಗೆ ತಿಳಿಯದು. ಅದು ಆಡುವ ಮಾತು ನಿನಗೆ ಅರ್ಥವಾಗದು.
16ಅದರ ಬತ್ತಳಿಕೆ ಬಾಯ್ದೆರೆದ
ಗೋರಿ; ಅದರ ಯೋಧರೆಲ್ಲರು ಶೂರರು.
17ಅವರು ನಿನ್ನ ದವಸಧಾನ್ಯಗಳನ್ನು ತಿಂದುಬಿಡುವರು. ನಿನ್ನ
ಗಂಡು ಹೆಣ್ಣುಮಕ್ಕಳನ್ನು ಕೊಲ್ಲುವರು. ನಿನ್ನ ದನಕುರಿಗಳನ್ನು ಕಬಳಿಸಿಬಿಡುವರು. ದ್ರಾಕ್ಷಾಲತೆಗಳನ್ನೂ

ಅಂಜೂರದ ಗಿಡಗಳನ್ನೂ ಹಾಳುಮಾಡುವರು. ನೀನು ನಂಬಿಕೊಂಡಿರುವ ಕೋಟೆ ಕೊತ್ತಲಗಳುಳ್ಳ ಪಟ್ಟಣಗಳನ್ನು ಅಸ್ತ್ರಗಳಿಂದ ಹಾಳುಮಾಡುವರು.

18“ಆದರೂ ಆ ದಿನಗಳಲ್ಲಿ ನಾನು ನಿಮ್ಮನ್ನು ಸಂಪೂರ್ಣವಾಗಿ ನಿರ್ಮೂಲ ಮಾಡುವುದಿಲ್ಲ. ಇದು
ಸರ್ವೇಶ್ವರನಾದ ನನ್ನ ನುಡಿ. 19‘ನಮ್ಮ ದೇವರಾದ ಸರ್ವೇಶ್ವರಸ್ವಾಮಿಯೇ ಇವುಗಳನ್ನೆಲ್ಲ ನಮಗೇಕೆ ಮಾಡಿದ್ದಾರೆ?’ ಎಂದು ಕೇಳುವಾಗ ನೀನು ಅವರಿಗೆ, ‘ನೀವು ಸರ್ವೇಶ್ವರನನ್ನೇ ತೊರೆದು, ಸ್ವಂತನಾಡಿನಲ್ಲೆ ಅನ್ಯದೇವತೆಗಳಿಗೆ ಸೇವೆಸಲ್ಲಿಸಿದ್ದೀರಿ. ಅಂತೆಯೇ ಹೊರನಾಡಿನಲ್ಲಿ ಅನ್ಯರಿಗೆ ಸೇವೆಮಾಡುವಿರಿ’ ಎಂದು ಹೇಳು.”

## ದೇವಜನರಿಗೆ ಎಚ್ಚರಿಕೆ

20 ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: “ಯಕೋಬ ಮನೆತನಕ್ಕೆ ಇದನ್ನು ಸಾರಿರಿ, ಜುದೇಯದಲ್ಲಿ
ಹೀಗೆ ಪ್ರಕಟಿಸಿರಿ; 21ಕಣ್ಣಿದ್ದರೂ ಕಾಣದ, ಸರ್ವೇಶ್ವರನ ಈ ಮಾತನ್ನು ಕೇಳಿರಿ: 22ನೀವು ನನಗೆ
ಅಂಜುವುದಿಲ್ಲವೋ? ನನ್ನೆದುರಿಗೆ ನಡುಗುವುದಿಲ್ಲವೊ? ಕಡಲು ದಾಟದ ಹಾಗೆ ಅದಕ್ಕೆ ಮರಳನ್ನು ನಿತ್ಯನಿಬಂಧನೆಯಿಂದ ಮೇರೆಯನ್ನಾಗಿ ನೇಮಿಸಿದವನು ನಾನು. ತೆರೆಗಳು ಅಲ್ಲಕಲ್ಲೋಲವಾದರೂ ಅದನ್ನು ಮೀರಲಾರವು. ಭೋರ್ಗರೆದರೂ ಹಾಯಲಾರವು. 23ನೀವಾದರೋ ನನ್ನ ಅಧೀನದಿಂದ ತಪ್ಪಿಸಿಕೊಂಡು
ಎದುರಿಬೀಳುವ ಹೃದಯವುಳ್ಳವರಾಗಿ ಇದ್ದೀರಿ. ಹದ್ದುಮೀರಿ ನನ್ನನ್ನು ಬಿಟ್ಟುಹೋಗಿ ಇದ್ದೀರಿ.
24ಮುಂಗಾರು, ಹಿಂಗಾರು ಹೀಗೆ ಸಕಾಲದ ಮಳೆಯನ್ನು ಬರಮಾಡುವವನು ನಾನು. ಸುಗ್ಗಿಯ ಕ್ಲುಪ್ತವಾರಗಳನ್ನು ಪ್ರತ್ಯೇಕಿಸುವವನು ನಾನು. ಆದರೆ ನೀವು ನನ್ನಲ್ಲಿ ಭಯಭಕ್ತಿ ಇಡಲು ಮನದಲ್ಲಿ ನೆನೆಯದೆ
ಇದ್ದೀರಿ. 25ನಿಮ್ಮ ಅಪರಾಧಗಳು ಈ ಪ್ರಯೋಜನಗಳನ್ನು ತಡೆಗಟ್ಟಿವೆ. ನಿಮ್ಮ ಪಾಪಗಳು, ಈ ಒಳಿತು ನಿಮಗೆ ಸಿಗದಂತೆ ತಪ್ಪಿಸಿವೆ.

26 “ನನ್ನ ಜನರ ನಡುವೆ ಕೆಟ್ಟವರು ಕಂಡು ಬಂದಿದ್ದಾರೆ. ಬೇಡರು ಹೊಂಚುಹಾಕುವ ಹಾಗೆ
ಅವರು ಹೊಂಚುಹಾಕುತ್ತಾರೆ. ಬೋನೊಡ್ಡಿ ಜನರನ್ನು ಹಿಡಿಯುತ್ತಾರೆ. 27ಪಂಜರಗಳಲ್ಲಿ ಪಕ್ಷಿಗಳು
ತುಂಬಿರುವಂತೆ ಅವರ ಮನೆಗಳಲ್ಲಿ ಮೋಸ ವಂಚನೆಯಿಂದ ಬಂದ ಆದಾಯಗಳು ತುಂಬಿವೆ. ಇದರಿಂದ
ದೊಡ್ಡ ಹಣವಂತರಾಗಿ ಇದ್ದಾರೆ. 28ಕೊಬ್ಬಿ ಮೆರೆಯುತ್ತಿದ್ದಾರೆ. ಕೆಟ್ಟಕಾರ್ಯಗಳಲ್ಲಂತೂ ನಿಸ್ಸೀಮರಾಗಿದ್ದಾರೆ. ಅನಾಥರ ಏಳಿಗೆಗಾಗಿ ಅವರ ಪಕ್ಷ ಹಿಡಿದು ವಾದಿಸುವುದಿಲ್ಲ. ದಿಕ್ಕಿಲ್ಲದವರಿಗೆ ನ್ಯಾಯ ದೊರಕಿಸುವುದಿಲ್ಲ.

29 “ನಾನು ಇವುಗಳಿಗಾಗಿ ಇವರನ್ನು ದಂಡಿಸಬಾರದೋ? ಇಂಥ ಜನತೆಯ ಮೇಲೆ ನನ್ನ ಕೋಪ
ತೀರಿಸದೆ ಇರುವೆನೋ? ಇದು ಸರ್ವೇಶ್ವರನಾದ ನನ್ನ ನುಡಿ. 30ಭೀಕರವಾದ ಹಾಗೂ ಅಸಹ್ಯವಾದ
ಘಟನೆಗಳು ನಾಡಿನಲ್ಲಿ ನಡೆದುಬಂದಿವೆ. 31ಪ್ರವಾದಿಗಳೇ ಸುಳ್ಳು ಪ್ರವಾದನೆ ಮಾಡುತ್ತಾರೆ. ಯಾಜಕರು ಅಂಥವರಿಂದ ಅಧಿಕಾರ ಪಡೆದು ದೊರೆತನಮಾಡುತ್ತಾರೆ. ನನ್ನ ಜನರಿಗೆ ಚೆನ್ನಾಗಿ ಹಿಡಿಸುವುದು ಇಂಥದ್ದೇ. ಆದರೆ ಅಂತ್ಯ ಬಂದಾಗ ಏನು ಮಾಡುವರು?”

## ಜೆರುಸಲೇಮಿನ ಸುತ್ತಲು ಶತ್ರುಗಳು

**6** ಬೆನ್ಯಮೀನ್ ಕುಲದವರೇ, ಜೆರುಸಲೇಮಿನಿಂದ ವಲಸೆ ಹೋಗಿರಿ. ತೆಕೋವದಲ್ಲಿ ಕೊಂಬನ್ನೂದಿರಿ.
ಬೇತ್‍ಹಕ್ಕೆರೆಮಿನಲ್ಲಿ ಧ್ವಜವನ್ನೆತ್ತಿರಿ. ಏಕೆಂದರೆ ಅತಿ ವಿನಾಶಕರವಾದ ವಿಪತ್ತು ಉತ್ತರದಿಂದ ತಲೆದೋರುತ್ತಿದೆ.
2ಸುಂದರವೂ, ಸೊಂಪಾದ ಹಸಿರುಗಾವಲಿಗೆ ಸಮಾನವೂ ಆದ ಸಿಯೋನ್ ನಗರ ನಾಶವಾಗಲಿದೆ.
3ವೈರಿಗಳಾದ ಕುರುಬರು ತಮ್ಮ ಹಿಂಡುಗಳೊಡನೆ ಅಲ್ಲಿಗೆ ಬಂದು ಅದರ ಎದುರಿಗೆ ಹಾಗೂ ಸುತ್ತಲೂ ತಮ್ಮ ಗುಡಾರಗಳನ್ನು ಹಾಕುವರು. ಪ್ರತಿಯೊಬ್ಬನೂ ತನಗೆ ಇಷ್ಟಬಂದ ಸ್ಥಳದಲ್ಲೇ ಮೇಯಿಸಿಬಿಡುವನು.
4ಅವರು: “ಸಿಯೋನಿಗೆ ವಿರುದ್ಧ ಯುದ್ಧಸನ್ನದ್ಧರಾಗಿರಿ. ಏಳಿ, ನಡು ಮಧ್ಯಾಹ್ನದಲ್ಲೆ ಅದರ ಮೇಲೆ ನುಗ್ಗುವ. ಅಯ್ಯೋ, ಇದೇನು ಹೊತ್ತು ಮೀರಿ ಹೋಗುತ್ತಿದೆ ಅಲ್ಲಾ, ಸಂಜೆಯ ನೆರಳು ಉದ್ದುದ್ದವಾಗುತ್ತಿದೆಯಲ್ಲಾ!

5ಎದ್ದು ರಾತ್ರಿಯಲ್ಲೆ ಅದರ ಮೇಲೆ ಬಿದ್ದು ಅಲ್ಲಿನ ಅರಮನೆಗಳನ್ನು ಹಾಳು ಮಾಡೋಣ," ಎಂದುಕೊಳ್ಳುತ್ತಿದ್ದಾರೆ.

6 ಸರ್ವಶಕ್ತನಾದ ಸರ್ವೇಶ್ವರಸ್ವಾಮಿ ಹೀಗೆ ಎನ್ನುತ್ತಾರೆ: "ಸಿಯೋನ್ ಸುತ್ತಣ ಮರಗಳನ್ನು ಕಡಿದುಬಿಡಿ. ಜೆರುಸಲೇಮ್ ಎದುರಿಗೆ ದಿಬ್ಬಗಳನ್ನು ಎಬ್ಬಿಸಿರಿ. ನೀವು ದಂಡಿಸಬೇಕಾದ ನಗರ ಇದುವೆ. ದರೋಡೆ ದಬ್ಬಾಳಿಕೆಗಳಿಂದ ಅದು ತುಂಬಿದೆ. 7ತೊಟ್ಟಿ ತನ್ನಲ್ಲಿನ ನೀರನ್ನು ತಿಳಿಯಾಗಿ ಇಟ್ಟುಕೊಳ್ಳುವಂತೆ ಈ ನಗರ ತನ್ನಲ್ಲಿನ ನೀಚತನವನ್ನು ನಿಚ್ಚಳವಾಗಿ ಇಟ್ಟು ಕೊಂಡಿದೆ. ಇಲ್ಲಿಂದ ಕೇಳಿಬರುವುದೆಲ್ಲ ಹಿಂಸಾಚಾರದ ಹಾಗೂ ಕೊಳ್ಳೆಯ ಸುದ್ದಿಯೆ. ರೋಗ ರುಜಿನಗಳೂ ಗಾಯಹುಣ್ಣುಗಳೂ ಸದಾ ನನ್ನ ಕಣ್ಣಿಗೆ ಬೀಳುತ್ತಿವೆ. 8ಜೆರುಸಲೇಮ್, ಎಚ್ಚರಿಕೆಯಿಂದ ನಡೆದುಕೊ. ಇಲ್ಲವಾದರೆ ನಾನು ನಿನ್ನನ್ನು ಅಗಲಿ ಬಿಡುವೆನು. ನಿನ್ನನ್ನು ಪಾಳುಬಿದ್ದ ನಿರ್ಜನ ಪ್ರದೇಶವಾಗಿಸುವೆನು."

## ದಂಗೆಕೋರ ಇಸ್ರಯೇಲ್

9 ಸರ್ವಶಕ್ತರಾದ ಸರ್ವೇಶ್ವರಸ್ವಾಮಿ ನನಗೆ ಹೀಗೆಂದರೆ: "ಇಸ್ರಯೇಲಿನ ಅಳಿದುಳಿದವರನ್ನು ದ್ರಾಕ್ಷಿಯ ಹಕ್ಕಲನ್ನೋ ಎಂಬಂತೆ ಆಯ್ದುಕೊ. ದ್ರಾಕ್ಷಿಯ ಹಣ್ಣನ್ನು ಕೀಳುವವನಂತೆ ನಿನ್ನ ಕೈಯನ್ನು ಮತ್ತೆ ರೆಂಬೆಗಳಿಗೆ ಹಾಕು."

10 ಅದಕ್ಕೆ ನಾನು, "ಅಯ್ಯೋ! ಯಾರ ಸಂಗಡ ನಾನು ಮಾತಾಡಿ ಅವರು ಗಮನಿಸುವಂತೆ ಮಾಡಲಿ? ಅವರ ಕಿವಿ ಮಂದ. ಅವರು ಕೇಳಿಸಿಕೊಳ್ಳುವುದಿಲ್ಲ. ಸರ್ವೇಶ್ವರ ಆದ ನಿಮ್ಮ ಮಾತು ಎಂದರೆ ಅವರಿಗೆ ತಿರಸ್ಕಾರ. ಅದು ಅವರಿಗೆ ರುಚಿಸುವುದಿಲ್ಲ. 11ಆದಕಾರಣವೇ ನಿಮ್ಮ ಕೋಪ ನನ್ನಲ್ಲೂ ತುಂಬಿತುಳುಕುತ್ತಿದೆ. ಅದನ್ನು ತಡೆದು ತಡೆದು ನನಗೆ ಸಾಕಾಗಿದೆ," ಎಂದೆನು.

ಆಗ ಸರ್ವೇಶ್ವರ ನನಗೆ: "ಹಾಗಾದರೆ ಆ ಕೋಪವನ್ನು ಬೀದಿಯಲ್ಲಿನ ಮಕ್ಕಳ ಮೇಲೂ ಯುವಕರ ಕೂಟಗಳ ಮೇಲೂ ಕಾರಿಬಿಡು. ಗಂಡ ಹೆಂಡತಿಯರನ್ನೂ ಮುದುಕರನ್ನೂ ವಯೋವೃದ್ಧರನ್ನೂ ಅಪಹರಿಸಲಾಗುವುದು. 12ಅವರ ಹೆಂಡತಿ, ಮನೆ, ಹೊಲ, ಗದ್ದೆ ಎಲ್ಲವೂ ಅನ್ಯರ ಪಾಲಾಗುವುದು."

"ನಾಡಿನ ನಿವಾಸಿಗಳ ಮೇಲೆ ಕೈಮಾಡುವೆನೆಂಬುದು ಖಚಿತ. ಇದು ಸರ್ವೇಶ್ವರನಾದ ನನ್ನ ನುಡಿ. 13ಚಿಕ್ಕವರು ಮೊದಲುಗೊಂಡು ದೊಡ್ಡವರ ತನಕ ಎಲ್ಲರೂ ಅನ್ಯಾಯವಾಗಿ ದೋಚಿಕೊಳ್ಳುತ್ತಲೇ ಇದ್ದಾರೆ. ಪ್ರವಾದಿಗಳು ಮೊದಲಾಗಿ ಯಾಜಕರವರೆಗೆ ಸಕಲರು ಮೋಸಮಾಡುತ್ತಾ ಇದ್ದಾರೆ. 14ಅವರು, ನನ್ನ ಜನರ ಗಾಯಗಳು ಗುಣವಾಗದಿದ್ದರೂ ಅವು ಕೇವಲ ಮಚ್ಚೆಗಳೋ ಎಂಬಂತೆ 'ಎಲ್ಲ ಚೆನ್ನಾಗಿದೆ' ಎಂದು ಸಮಾಧಾನ ಹೇಳಿ ವಂಚಿಸುತ್ತಿದ್ದಾರೆ. 15ಅಸಹ್ಯ ಕಾರ್ಯಗಳನ್ನು ಮಾಡಿ ಅವಮಾನಕ್ಕೆ ಗುರಿಯಾಗಿದ್ದರೂ ಎಳ್ಳಷ್ಟೂ ನಾಚಿಕೆ ಇಲ್ಲದಿದ್ದಾರೆ. ಅವರಿಗೆ ಲಜ್ಜೆಯ ಗಂಧವೂ ಇಲ್ಲ. ಆದಕಾರಣ ಬೇರೆಯವರಂತೆ ಅವರೂ ಬೀಳುವರು. ನಾನು ದಂಡಿಸುವಾಗ ಅವರು ಏಳಲಾಗದಂತೆ ಮುಗ್ಗರಿಸಿ ಬೀಳುವರು. ಇದು ಸರ್ವೇಶ್ವರನಾದ ನನ್ನ ನುಡಿ," ಎಂದರು.

## ದೇವರ ಮಾರ್ಗವನ್ನು ತೊರೆದ ಇಸ್ರಯೇಲ್

16 ಸರ್ವೇಶ್ವರಸ್ವಾಮಿ ತಮ್ಮ ಜನರಿಗೆ: "ನೀವು ದಾರಿಗಳು ಕೂಡುವ ಸ್ಥಳಗಳಲ್ಲಿ ನಿಂತು ನೋಡಿ. ಸನಾತನ ಮಾರ್ಗಗಳು ಯಾವುವು? ಸನ್ಮಾರ್ಗ ಎಲ್ಲಿದೆ? ಎಂದು ವಿಚಾರಿಸಿರಿ. ಅದರಲ್ಲೆ ಮುನ್ನಡೆಯಿರಿ. ಆಗ ನಿಮಗೆ ಮನನೆಮ್ಮದಿ ದೊರಕುವುದು."

ಆದರೆ ಆ ಜನರು: "ಇಲ್ಲ, ನಾವು ಅದರಲ್ಲಿ ನಡೆಯುವುದೇ ಇಲ್ಲ" ಎಂದರು. 17ಸರ್ವೇಶ್ವರ ಸ್ವಾಮಿ ಕಾವಲುಗಾರರನ್ನು ನೇಮಿಸಿ, "ಕಹಳೆಯ ಕೂಗನ್ನು ಕೇಳಿ" ಎಂದರು. ಅವರು "ಇಲ್ಲ, ಕೇಳುವುದಿಲ್ಲ" ಎಂದು ಉತ್ತರಿಸಿದರು.

18 ಆದುದರಿಂದ ಸರ್ವೇಶ್ವರ: "ರಾಷ್ಟ್ರಗಳೇ ಆಲಿಸಿ. ನನ್ನ ಜನರಿಗೆ ಸಂಭವಿಸಲಿರುವುದನ್ನು ಗಮನಿಸಿ. 19ಜಗವೇ ಕೇಳು. ಇದೋ, ಈ ಜನರು ನನ್ನ ಮಾತುಗಳನ್ನು ಕೇಳದೆ, ನನ್ನ ಧರ್ಮ ಬೋಧನೆಯನ್ನು ಅಸಡ್ಡೆಮಾಡಿದ್ದಾರೆ. ಆದ್ದರಿಂದ ಅವರ ಮೇಲೆ ಕೇಡನ್ನು ಬರಮಾಡುವೆನು. ಅವರ

ಯೋಜನೆಗಳಿಗೆ ಅದೇ ತಕ್ಕ ಪ್ರತಿಫಲ. 20ಅವರು ಶೆಬದ ಧೂಪವನ್ನಾಗಲಿ, ದೂರ ದೇಶದ ಒಳ್ಳೆಯ ಸುಗಂಧವನ್ನಾಗಲಿ ತಂದು ನನಗೆ ಅರ್ಪಿಸುವುದರಿಂದ ನನಗೆ ಏನೂ ಪ್ರಯೋಜನವಿಲ್ಲ. ಅವರು ಒಪ್ಪಿಸುವ ದಹನ ಬಲಿಗಳನ್ನು ನಾನು ಮೆಚ್ಚುವುದಿಲ್ಲ. ಅವರ ಯಜ್ಞಬಲಿಗಳು ನನಗೆ ಇಷ್ಟವಿಲ್ಲ. 21ಆದಕಾರಣ ಈ ಜನರಿಗೆ ಅಡ್ಡಿಆತಂಕಗಳನ್ನು ಒಡ್ಡುವೆನು. ಹೆತ್ತವರೂ ಮಕ್ಕಳೂ ಎಡವಿಬೀಳುವರು, ನೆಂಟರಿಷ್ಟರೂ ನಾಶವಾಗಿ ಹೋಗುವರು. ಇದು ಸರ್ವೇಶ್ವರನಾದ ನನ್ನ ನುಡಿ."

### ಉತ್ತರದಿಂದ ಆಕ್ರಮಣ

22 ಮತ್ತೆ ಸರ್ವೇಶ್ವರಸ್ವಾಮಿ, "ಇಗೋ, ಉತ್ತರದಿಂದ ಒಂದು ರಾಷ್ಟ್ರ ಬರುತ್ತಿದೆ. ಅದು ಮಹಾ ಬಲಿಷ್ಠ ರಾಷ್ಟ್ರ. ಜಗದ ಕಟ್ಟಕಡೆಯಿಂದ ಹೊರಟುಬರುತ್ತಿದೆ. 23ಅವರು ಬಿಲ್ಲನ್ನೂ ಈಟಿಯನ್ನೂ ಹಿಡಿದಿದ್ದಾರೆ. ಅವರು ಕ್ರೂರಿಗಳು, ನಿಷ್ಕರುಣಿಗಳು. ಅವರ ಧ್ವನಿ ಸಮುದ್ರದಂತೆ ಭೋರ್ಗರೆಯುತ್ತಿದೆ. ಕುದುರೆಗಳನ್ನು ಏರಿದ್ದಾರೆ. ಎಲೌ ಸಿಯೋನ್ ನಗರಿಯೇ, ಆ ಶತ್ರುಸೈನ್ಯ ಶೂರನಂತೆ ನಿನ್ನ ಮೇಲೆ ಯುದ್ಧಸನ್ನದ್ಧವಾಗಿದೆ."

24 ಜೆರುಸಲೇಮಿನ ಜನರು: "ಈ ಸುದ್ದಿಯನ್ನು ಕೇಳಿದಾಗ ನಮ್ಮ ಕೈಗಳು ಜೋಲು ಬಿದ್ದುವು. ಪ್ರಸವವೇದನೆಯಂಥ ಯಾತನೆ ನಮ್ಮನ್ನು ಆವರಿಸಿತು. 25ಊರ ಹೊರಗೆ ಹೋಗುವಂತಿಲ್ಲ, ದಾರಿಯಲ್ಲಿ ನಡೆಯುವಂತಿಲ್ಲ. ಸುತ್ತ ಮುತ್ತಲೂ ಶತ್ರುವಿನ ಕತ್ತಿ, ಎಲ್ಲೆಲ್ಲೂ ದಿಗಿಲು ಎಂದರೆ ದಿಗಿಲು!"

26 ಸರ್ವೇಶ್ವರ ಜನರಿಗೆ: "ನನ್ನ ಪ್ರಜೆಯೆಂಬ ಕುವರಿಯೇ, ಗೋಣಿತಟ್ಟನ್ನು ಸುತ್ತಿಕೊ, ಬೂದಿಯಲ್ಲಿ ಬಿದ್ದು ಹೊರಳಾಡು. ಇದ್ದ ಒಬ್ಬನೇ ಮಗನನ್ನು ಕಳೆದುಕೊಂಡವಳಂತೆ ದುಃಖಪಟ್ಟು ಘೋರವಾಗಿ ಪ್ರಲಾಪಮಾಡು. ಕೊಳ್ಳೆಗಾರ ತಟ್ಟನೆ ನಿನ್ನ ಮೇಲೆ ಬೀಳಲಿದ್ದಾನೆ ಎಂಬುದನ್ನು ಮನದಲ್ಲಿಡು."

27 ಸರ್ವೇಶ್ವರ ಯೆರೆಮೀಯನಿಗೆ ಹೀಗೆ ಎಂದರು: "ನಿನ್ನನ್ನು ನನ್ನ ಜನವೆಂಬ ಅದುರಿಗೆ ಶೋಧಕನನ್ನಾಗಿ ನೇಮಿಸಿದ್ದೇನೆ. ನೀನು ಅವರ ನಡತೆಯನ್ನು ಪರೀಕ್ಷಿಸಿ ತಿಳಿದುಕೊಳ್ಳಬೇಕು. 28ಅವರೆಲ್ಲರು ಕೇವಲ ದ್ರೋಹಿಗಳು, ಚಾಡಿ ಹೇಳುತ್ತಾ ತಿರುಗಾಡುವವರು. ತಾಮ್ರ, ಕಬ್ಬಿಣಕ್ಕೆ ಸಮಾನರು, ಎಲ್ಲರೂ ಕೇಡಿಗರು. 29ತಿದಿ ಬುಸು ಬುಸುಗುಟ್ಟುತ್ತದೆ. ಸೀಸ ಉರಿಯಿಂದ ಸುಟ್ಟು ಹೋಗುತ್ತದೆ. ಅಕ್ಕಸಾಲಿಗನು ಎಷ್ಟು ಶೋಧಿಸಿದರೂ ಅವನ ಶ್ರಮವೆಲ್ಲ ವ್ಯರ್ಥ. ಏಕೆಂದರೆ ಕಲ್ಮಷವನ್ನು ಅವನಿಂದ ತೆಗೆಯಲಾಗಲಿಲ್ಲ. 30ಸರ್ವೇಶ್ವರ ಆದ ನಾನು ಅವರನ್ನು ತಳ್ಳಿ ಬಿಟ್ಟಿರುವುದರಿಂದ ಅವರು ಕಂದುಬೆಳ್ಳಿ ಎನಿಸಿಕೊಳ್ಳುವರು."

### ದೇವಾಲಯದಲ್ಲಿ ಯೆರೆಮೀಯನಿಗೆ ಬೋಧನೆ

**7** ಸರ್ವೇಶ್ವರ ಯೆರೆಮೀಯನಿಗೆ ಹೇಳಿದ ಮಾತು: 2"ನೀನು ನನ್ನ ಆಲಯದ ಬಾಗಿಲಲ್ಲಿ ನಿಂತು ಈ ವಾಕ್ಯವನ್ನು ಸಾರು – 'ಸರ್ವೇಶ್ವರಸ್ವಾಮಿಗೆ ಅಡ್ಡಬೀಳಲು ಈ ದ್ವಾರಗಳನ್ನು ಪ್ರವೇಶಿಸುವ ಎಲ್ಲ ಯೆಹೂದ್ಯರೇ, ಸರ್ವೇಶ್ವರನ ನುಡಿಯನ್ನು ಕೇಳಿ; 3ಇಸ್ರಯೇಲಿನ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಹೀಗೆನ್ನುತ್ತಾರೆ: "ನೀವು ನಿಮ್ಮ ನಡತೆಯನ್ನೂ ಕೃತ್ಯಗಳನ್ನೂ ತಿದ್ದುಕೊಳ್ಳಿ. ಹಾಗೆ ಮಾಡಿದರೆ ನಾನು ನಿಮ್ಮನ್ನು ಈ ಸ್ಥಳದಲ್ಲಿ ನೆಲೆಗೊಳಿಸುವೆನು. 4'ಇದು ಸರ್ವೇಶ್ವರನ ಗರ್ಭಗುಡಿ, ಸರ್ವೇಶ್ವರನ ಗರ್ಭಗುಡಿ, ಸರ್ವೇಶ್ವರನ ಗರ್ಭಗುಡಿ, (ಆದುದರಿಂದ ಎಲ್ಲ ಸುಭದ್ರ)' ಎಂಬ ಮೋಸಕರ ಮಾತುಗಳಲ್ಲಿ ಭರವಸೆ ಇಡಬೇಡಿ.

5"ನೀವು ನಿಮ್ಮ ನಡೆಯನ್ನೂ ಕೃತ್ಯಗಳನ್ನೂ ಪೂರ್ತಿಯಾಗಿ ತಿದ್ದುಕೊಳ್ಳಿ. ಒಬ್ಬರು ಮತ್ತೊಬ್ಬರೊಡನೆ ನ್ಯಾಯನೀತಿಯಿಂದ ವರ್ತಿಸಿರಿ. 6ಅನ್ಯರನ್ನಾಗಲಿ, ಅನಾಥರನ್ನಾಗಲಿ, ವಿಧವೆಯರನ್ನೇ ಆಗಲಿ ಶೋಷಣೆಗೆ ಗುರಿಪಡಿಸಬೇಡಿ! ಇಲ್ಲೆಲ್ಲೂ ನಿರ್ದೋಷಿಗಳ ರಕ್ತವನ್ನು ಸುರಿಸಬೇಡಿ. ನಿಮಗೆ ಹಾನಿಕರವಾದ ಅನ್ಯದೇವತಾ ಭಕ್ತಿಯನ್ನು ಬಿಟ್ಟುಬಿಡಿ. 7ಆಗ ನಾನು ನಿಮ್ಮನ್ನು ಈ ಸ್ಥಳದಲ್ಲೆ ನೆಲೆಗೊಳಿಸುವೆನು. ನಿಮ್ಮ ಪೂರ್ವಜರಿಗೆ ನಾನು ಶಾಶ್ವತವಾಗಿ ದಯಪಾಲಿಸಿದ ಈ ನಾಡಿನಲ್ಲೆ ನೆಲೆಗೊಳಿಸುವೆನು."

8 "ನಿಷ್ಪ್ರಯೋಜಕವಾದ ಹಾಗೂ ಮೋಸದ ಮಾತುಗಳಲ್ಲಿ ನೀವು ಭರವಸೆ ಇಟ್ಟಿದ್ದೀರಿ. 9ಕಳವು, ಕೊಲೆ, ವ್ಯಭಿಚಾರಗಳನ್ನು ಮಾಡುತ್ತೀರಿ. ಸುಳ್ಳುಸಾಕ್ಷಿ ಹೇಳುತ್ತೀರಿ. ಬಾಳನಿಗೆ ಧೂಪಾರತಿ ಎತ್ತುತ್ತೀರಿ. ಕಂಡು

ಕೇಳದ ಅನ್ಯದೇವತೆಗಳನ್ನು ಆರಾಧಿಸುತ್ತೀರಿ. 10ನನ್ನ ಹೆಸರು ಪಡೆದಿರುವ ಈ ದೇವಾಲಯಕ್ಕೆ ಬಂದು ನನ್ನ ಸನ್ನಿಧಿಯಲ್ಲಿ ನಿಂತು – 'ನಾವು ಸುರಕ್ಷಿತರು' ಎನ್ನುತ್ತೀರಿ. ಈ ಎಲ್ಲ ಅಸಹ್ಯಕಾರ್ಯಗಳನ್ನು ನಡೆಸುವುದಕ್ಕೋ ಈ ಸುರಕ್ಷತೆ? 11ನನ್ನ ಹೆಸರಿನಲ್ಲಿ ಕಟ್ಟಿರುವ ದೇವಾಲಯ ನಿಮ್ಮ ದೃಷ್ಟಿಗೆ ಕಳ್ಳರ ಗುಹೆ ಆಗಿದೆಯೋ? ಹೌದು, ಇದನ್ನೆಲ್ಲ ನಾನೆ ಖುದ್ದಾಗಿ ನೋಡಿದ್ದೇನೆ. ಇದು ಸರ್ವೇಶ್ವರನಾದ ನನ್ನ ನುಡಿ. 12ನಾನು ನನ್ನ ನಾಮವನ್ನು ಮೊದಲು ಪ್ರತಿಷ್ಠಾಪಿಸಿದ 'ಶಿಲೊ' ಎಂಬ ಸ್ಥಾನಕ್ಕೆ ಹೋಗಿ ನೋಡಿ. ನನ್ನ ಜನ ಇಸ್ರಯೇಲರ ಅಧರ್ಮದ ನಿಮಿತ್ತ ಆ ಸ್ಥಳಕ್ಕೆ ತಂದ ಗತಿಯನ್ನು ಹೋಗಿ ನೋಡಿ. 13ನಾನು ತಡಮಾಡದೆ ನುಡಿದ ಮಾತುಗಳನ್ನು ನೀವು ಕೇಳದೆ, ನಿಮ್ಮನ್ನು ಕರೆದ ನನಗೆ ಓಗೊಡದೆ, ಈ ಕೃತ್ಯಗಳನ್ನೆಲ್ಲ ಮಾಡಿದ್ದೀರಿ. 14ಈ ಕಾರಣ ನನ್ನ ನಾಮಕ್ಕೆ ನೆಲೆಯಾದ ಹಾಗು ನಿಮ್ಮ ಭರವಸೆಗೆ ಆಧಾರವಾದ ಈ ದೇವಾಲಯಕ್ಕೆ, ನಿಮಗೂ ನಿಮ್ಮ ಪೂರ್ವಜರಿಗೂ ನಾನು ಕೊಟ್ಟ ಈ ಸ್ಥಳಕ್ಕೆ, ನಾನು ಶಿಲೋಗೆ ಬರಮಾಡಿದ ಗತಿಯನ್ನೇ ಬರಮಾಡುವೆನು.
15ನಿಮ್ಮ ಬಂಧು ಬಳಗದವರನ್ನು ಅಂದರೆ, ಇಡಿ ಎಫ್ರಯಿಮ್ ವಂಶದವರನ್ನು ತೊಲಗಿಸಿಬಿಟ್ಟಂತೆ, ನಿಮ್ಮನ್ನೂ ನನ್ನ ಸನ್ನಿಧಿಯಿಂದ ತೊಲಗಿಸುವೆನು."

**ದಂಡಿಸಿದರೂ ತಿದ್ದುಕೊಳ್ಳದ ಮೊಂಡು ಜನ**

16"ಯೆರೆಮೀಯನೇ, ನೀನಂತು ಈ ಜನರಿಗಾಗಿ ಬೇಡಿಕೊಳ್ಳಬೇಡ. ಇವರ ಪರವಾಗಿ ಮೊರೆ ಇಡಬೇಡ. ಪ್ರಾರ್ಥಿಸಲೂ ಬೇಡ, ನನ್ನ ಬಳಿ ವಿಜ್ಞಾಪಿಸಲೂ ಬೇಡ. ನಾನು ಅದನ್ನು ಕೇಳಲಾರೆ. 17ಇವರು ಜುದೇಯ ಪಟ್ಟಣಗಳಲ್ಲೂ ಜೆರುಸಲೇಮಿನ ಬೀದಿಗಳಲ್ಲೂ ಮಾಡುವುದನ್ನು ನೀನೆ ನೋಡಿರುವೆ ಅಲ್ಲವೆ?
18'ಗಗನದೊಡತಿ' ಎಂದು ಇವರು ಕರೆವ ದೇವತೆಗೆ ಹೋಳಿಗೆಗಳನ್ನು ಮಾಡುವುದಕ್ಕಾಗಿ ಅವರ ಮಕ್ಕಳು ಸೌದೆಯನ್ನು ಆಯ್ದು ತರುತ್ತಾರೆ. ಗಂಡಸರು ಬೆಂಕಿ ಹೊತ್ತಿಸುತ್ತಾರೆ. ಹೆಂಗಸರು ಹಿಟ್ಟನ್ನು ನಾದುತ್ತಾರೆ. ನನ್ನನ್ನು ಕೆಣಕಬೇಕೆಂದೇ ಅನ್ಯದೇವತೆಗಳಿಗೆ ಪಾನನೈವೇದ್ಯವನ್ನು ಅರ್ಪಿಸುತ್ತಾರೆ. 19ಇವರು ಮಾಡುತ್ತಿರುವ ಕೇಡು ನನಗೋ? ಲಜ್ಜೆಯಿಂದ ಮುಖಮುಚ್ಚಿ ಕೊಳ್ಳುವಷ್ಟು ಕೇಡನ್ನು ತಮಗೆ ತಾವೇ ತಂದು ಕೊಳ್ಳುತ್ತಿದ್ದಾರಲ್ಲವೆ?" ಎನ್ನುತ್ತಾರೆ ಸರ್ವೇಶ್ವರ, 20"ಸರ್ವೇಶ್ವರನಾದ ನಾನು ಹೇಳುವುದನ್ನು ಗಮನಿಸಿರಿ: ಇಗೋ, ನನ್ನ ಕೋಪವೆಂಬ ರೋಷಾಗ್ನಿಯನ್ನು ಈ ಸ್ಥಳದ ಮೇಲೆ ಸುರಿಸುವೆನು. ನರಮಾನವರ ಮೇಲೂ ಪಶುಪ್ರಾಣಿಗಳ ಮೇಲೂ ಕಾಡುಮರಗಳ ಮೇಲೂ ಭೂಮಿಯ ಬೆಳೆಯ ಮೇಲೂ ಅದನ್ನು ಕಾರುವೆನು. ಅದು ಆರದೆ ದಹಿಸುವುದು!"

21 ಇಸ್ರಯೇಲಿನ ದೇವರೂ ಸರ್ವಶಕ್ತರೂ ಆದ ಸರ್ವೇಶ್ವರನ ನುಡಿ ಇದು: "ನೀವು ಅರ್ಪಿಸುವ ದಹನಬಲಿಗಳನ್ನು, ಸಾಧಾರಣ ಯಜ್ಞಬಲಿಗಳೆಂದು ಭಾವಿಸಿ ಅವುಗಳ ಮಾಂಸವನ್ನು ಕೂಡ ನೀವೇ ತಿನ್ನಿರಿ.
22ನಿಮ್ಮ ಪೂರ್ವಜರನ್ನು ಈಜಿಪ್ಟ್ ದೇಶದಿಂದ ಬರಮಾಡಿದಾಗ ದಹನಬಲಿಯ ವಿಷಯವಾಗಿಯಾಗಲಿ, ಯಜ್ಞಬಲಿಯ ವಿಷಯವಾಗಿಯಾಗಲಿ ನಾನು ಅವರಿಗೆ ಏನೂ ಹೇಳಲಿಲ್ಲ; ಯಾವ ಕಟ್ಟಳೆಯನ್ನೂ ಕೊಡಲಿಲ್ಲ. 23ನಾನು ಕೊಟ್ಟ ಒಂದು ಕಟ್ಟಳೆಯೆಂದರೆ ಇದು – ನನ್ನ ಮಾತಿಗೆ ಕಿವಿಗೊಡಿ, ನಾನು ನಿಮ್ಮ ದೇವರಾಗಿರುತ್ತೇನೆ, ನೀವು ನನ್ನ ಪ್ರಜೆಯಾಗಿರಿ. ನಿಮಗೆ ಹಿತವಾಗುವಂತೆ ನಾನು ವಿಧಿಸುವ ಮಾರ್ಗದಲ್ಲೆ ನಡೆಯಿರಿ. 24ಆದರೆ ಅವರು ಕೇಳಲಿಲ್ಲ. ಕಿವಿಗೊಡಲಿಲ್ಲ. ತಮ್ಮ ಸ್ವಂತ ಆಲೋಚನೆಗಳನ್ನು ಅನುಸರಿಸಿದರು. ತಮ್ಮ ದುಷ್ಟ ಹೃದಯದ ನಿಮಿತ್ತ ಹಟಮಾರಿಗಳಂತೆ ನಡೆದುಕೊಂಡರು. ಮುಂದೆ ಸಾಗದೆ ಹಿಂದಿರುಗಿಯೇ ಹೋದರು. 25ನಿಮ್ಮ ಪೂರ್ವಜರು ಈಜಿಪ್ಟ್ ದೇಶದಿಂದ ಹೊರಟದಿನ ಮೊದಲುಗೊಂಡು ಈ ದಿನದವರೆಗೂ ನನ್ನ ದಾಸರಾದ ಎಲ್ಲ ಪ್ರವಾದಿಗಳನ್ನು ನಿಮ್ಮವರ ಬಳಿಗೆ ಕಳಿಸುತ್ತಾ ಬಂದು ಇದ್ದೇನೆ. ದಿನದಿನವೂ ತಡಮಾಡದೆ ಕಳಿಸಿದ್ದೇನೆ. 26ನಿಮ್ಮವರಾದರೋ ನನ್ನ ಮಾತನ್ನು ಕೇಳಲಿಲ್ಲ, ಕಿವಿಗೊಡಲಿಲ್ಲ. ನನ್ನ ಆಜ್ಞೆಗೆ ಮಣಿಯಲಿಲ್ಲ. ತಮ್ಮ ಪೂರ್ವಜರಿಗಿಂತಲೂ ಕೆಟ್ಟವರಾಗಿ ನಡೆದುಕೊಂಡರು."

27 "ಯೆರೆಮೀಯನೇ, ನೀನು ಈ ಮಾತುಗಳನ್ನು ಅವರಿಗೆ ಹೇಳಿದರೂ ಅವರು ಕಿವಿಗೊಡುವುದಿಲ್ಲ, ಕರೆದರೂ ಅವರು ಓಗೊಡುವುದಿಲ್ಲ. 28ಆದಕರಣ ನೀನು ಅವರಿಗೆ – 'ತನ್ನ ದೇವರಾದ ಸರ್ವೇಶ್ವರನ ಮಾತಿಗೆ ಕಿವಿಗೊಡದ, ದಂಡಿಸಿದರೂ ತಿದ್ದುಕೊಳ್ಳದ ಜನಾಂಗ ಇದುವೇ; ಸತ್ಯವೆಂಬುದು ಅಳಿದುಹೋಗಿದೆ, ಇದರ ಬಾಯಿಂದ ಕಡಿದು ಹೋಗಿದೆ' ಎಂದು ಹೇಳು."

## ಕಣಿವೆಯಲ್ಲಿ ಕಲ್ಲಿಗೆ ಆರಾಧನೆ

29 “ಎಲೈ ಜೆರುಸಲೇಮೇ!
ತಲೆಬೋಳಿಸಿಕೊಂಡು ಕೂದಲನ್ನು
ಬಿಸಾಡಿಬಿಡು
ಬೋಳುಗುಡ್ಡಗಳಲ್ಲಿ ಶೋಕಗೀತೆಯನ್ನು
ಹಾಡು.
ಏಕೆಂದರೆ ಸರ್ವೇಶ್ವರನಾದ ನಾನು
ಕೋಪಗೊಂಡು,
ನಿರಾಕರಿಸಿ, ತ್ಯಜಿಸಿಬಿಟ್ಟಿದ್ದೇನೆ ಈ
ವಂಶವನ್ನು.”

30 ಸರ್ವೇಶ್ವರನ ನುಡಿ: “ಯೆಹೂದ್ಯರು ನನ್ನ ಚಿತ್ತಕ್ಕೆ ವಿರುದ್ಧವಾದುದನ್ನೆ ಮಾಡಿದ್ದಾರೆ. ನನ್ನ ಹೆಸರಿನಿಂದ ಪ್ರಖ್ಯಾತಗೊಂಡ ದೇವಾಲಯದಲ್ಲಿ ತಮ್ಮ ಅಸಹ್ಯವಸ್ತುಗಳನ್ನು ಇಟ್ಟು ಅದನ್ನು ಹೊಲೆಮಾಡಿದ್ದಾರೆ.
31ತಮ್ಮ ಗಂಡುಹೆಣ್ಣು ಮಕ್ಕಳನ್ನೂ ಆಹುತಿಕೊಡುವುದಕ್ಕೆ ಬೆನ್ ಹಿನ್ನೋಮ್ ಕಣಿವೆಯಲ್ಲಿನ ತೋಫೆತೆಂಬ ಬಲಿಪೀಠವನ್ನು ಕಟ್ಟಿದ್ದಾರೆ. ಇಂಥ ಕಾರ್ಯವನ್ನು ನಾನು ವಿಧಿಸಿಲ್ಲ. ಅದು ನನ್ನ ಮನಸ್ಸಿಗೂ ಸುಳಿದಿಲ್ಲ.
32ಆದ್ದರಿಂದ ಇಗೋ, ಆ ಕಣಿವೆಗೆ ತೋಫೆತ್ ಮತ್ತು ಬೆನ್‍ಹಿನ್ನೋಮ್ ಎಂಬ ಹೆಸರುಗಳು ಹೋಗಿ ಸಂಹಾರದ ಕಣಿವೆ ಎಂದು ಕರೆಯಲಾಗುವ ದಿನಗಳು ಬರಲಿವೆ. ಇನ್ನೆಲ್ಲೂ ಸ್ಥಳವಿಲ್ಲವಾಗಿ ಶವಗಳನ್ನು ಆ ತೋಫೆತಿನಲ್ಲಿ ಹೂಣುವರು.
33ಈ ಜನರ ಹೆಣಗಳು ಆಕಾಶ ಪಕ್ಷಿಗಳಿಗೂ ಭೂಜಂತುಗಳಿಗೂ ಆಹಾರವಾಗುವುವು. ಅವುಗಳನ್ನು ಬೆದರಿಸಿ ಓಡಿಸಲು ಯಾರೂ ಇರುವುದಿಲ್ಲ.
34ಜುದೇಯದ ಪಟ್ಟಣಗಳಲ್ಲೂ ಜೆರುಸಲೇಮಿನ ಬೀದಿಗಳಲ್ಲೂ ಹರ್ಷಾಡಂಬರಗಳು ಕೇಳಿಬರುವುದಿಲ್ಲ. ವಧೂವರರ ಸೊಲ್ಲನ್ನು ನಿಲ್ಲಿಸಿಬಿಡುವೆನು, ನಾಡಿಗೆ ನಾಡೇ ಹಾಳಾಗುವುದು. ಇದು ಸರ್ವೇಶ್ವರನಾದ ನನ್ನ ನುಡಿ.”

**8** “ಆ ಕಾಲ ಬಂದಾಗ ಜುದೇಯದ ಅರಸರು, ಅಧಿಪತಿಗಳು, ಯಾಜಕರು, ಪ್ರವಾದಿಗಳು ಹಾಗು ಜೆರುಸಲೇಮಿನ ನಿವಾಸಿಗಳು ಇವರೆಲ್ಲರ ಎಲುಬುಗಳನ್ನು ಗೋರಿಗಳಿಂದ ಅಗೆದು ತೆಗೆದು ಬಿಡುವರು.
2ಅವರು ಪ್ರೀತಿಸಿ, ಸೇವಿಸಿ, ಹಿಂಬಾಲಿಸಿ, ಆಶ್ರಯಿಸಿ, ಪೂಜಿಸಿದ ಸೂರ್ಯ, ಚಂದ್ರ, ತಾರಾಗಣಗಳ ಎದುರಿಗೇ ಆ ಎಲುಬುಗಳನ್ನು ಹರಡಿ ಬಿಡುವರು. ಅವುಗಳನ್ನು ಯಾರೂ ಕೂಡಿಸಿ ಮತ್ತೆ ಹೂಣಿಡುವುದಿಲ್ಲ. ಅವು ಭೂಮಿಯ ಮೇಲೆ ಗೊಬ್ಬರದಂತೆ ಬಿದ್ದಿರುವುವು.
3ಈ ಕೆಟ್ಟ ವಂಶದವರನ್ನು ನಾನು ಯಾವಾವ ಸ್ಥಳಗಳಿಗೆ ಅಟ್ಟಿಬಿಡುವೆನೋ, ಅಲ್ಲೆಲ್ಲಾ ಇವರಲ್ಲಿ ಅಳಿದುಳಿದವರು ಜೀವಿಸುವುದಕ್ಕಿಂತ ಸಾವೇ ಲೇಸೆಂದು ಬಯಸುವರು. ಇದು ಸರ್ವೇಶ್ವರನಾದ ನನ್ನ ನುಡಿ.”

## ಪಾಪ ಮತ್ತು ಪ್ರಾಯಶ್ಚಿತ್ತ

4 ನೀನು ಅವರಿಗೆ ಹೀಗೆ ಹೇಳಬೇಕು: “ಸರ್ವೇಶ್ವರ ಇಂತೆನ್ನುತ್ತಾರೆ: ಬಿದ್ದವರು ಮತ್ತೆ ಏಳುತ್ತಾರಲ್ಲವೆ? ಬಿಟ್ಟುಹೋದವನು ತಿರುಗಿ ಬರುತ್ತಾನಲ್ಲವೆ?
5ಈ ಜೆರುಸಲೇಮಿನವರು ಎಂದಿಗೂ ಹಿಂದಿರುಗದಂತೆ ಬಿಟ್ಟುಹೋದದ್ದೇಕೆ? ಮೋಸವನ್ನೇ ಪಟ್ಟಾಗಿ ಹಿಡಿದಿದ್ದಾರೆ. ಹಿಂತಿರುಗಿ ಬರಲೊಲ್ಲರು.
6ನಾನು ಕಿವಿಗೊಟ್ಟುಕೇಳಿದೆ. ಅವರು ಸತ್ಯವಾದುದನ್ನು ನುಡಿಯುತ್ತಿರಲಿಲ್ಲ. ಯಾವನೂ ತನ್ನ ಅಕ್ರಮಕ್ಕಾಗಿ ಪಶ್ಚಾತ್ತಾಪಪಟ್ಟು, ‘ಅಯ್ಯೋ ನಾನು ಎಂಥ ಕೆಲಸ ಮಾಡಿಬಿಟ್ಟೆ!’ ಎಂದುಕೊಳ್ಳುತ್ತಿರಲಿಲ್ಲ. ಯುದ್ಧದಲ್ಲಿ ರಭಸವಾಗಿ ಓಡುವ ಕುದುರೆಗಳಂತೆ ಪ್ರತಿಯೊಬ್ಬನೂ ತನ್ನ ತನ್ನ ಮಾರ್ಗದಲ್ಲೆ ದೌಡಾಯಿಸುತ್ತಿದ್ದಾನೆ.
7ಆಕಾಶದಲ್ಲಿ ಹಾರುವ ಬಕಪಕ್ಷಿಯು ತನ್ನ ನಿಯಮಿತ ಕಾಲಗಳನ್ನು ತಿಳಿದುಕೊಂಡಿದೆ. ಬೆಳವಕ್ಕಿ, ಬಾನಕ್ಕಿ,

ಕೊಕ್ಕರೆ ಇವು ತಮ್ಮ ಗಮನಾಗಮನದ ಸಮಯಗಳನ್ನು ತಿಳಿದಿರುತ್ತವೆ. ಆದರೆ ನನ್ನ ಜನರು ಸರ್ವೇಶ್ವರನಾದ ನನ್ನ ನಿಯಮಗಳನ್ನೆ ತಿಳಿಯರು. 8 'ನಾವು ಜ್ಞಾನಿಗಳು. ಸರ್ವೇಶ್ವರನ ಧರ್ಮಶಾಸ್ತ್ರ ನಮ್ಮಲ್ಲಿದೆ' ಎಂದು ನೀವು ಹೇಗೆ ತಾನೇ ಹೇಳಬಲ್ಲಿರಿ? ಧರ್ಮಶಾಸ್ತ್ರಿಗಳ ಸುಳ್ಳು ಲೇಖನಿ ಅದನ್ನು ಸುಳ್ಳನ್ನಾಗಿ ಮಾಡಿದೆ.
9ಜ್ಞಾನಿಗಳು ನಾಚಿಕೆಪಡುವರು, ನಿಬ್ಬೆರಗಾಗಿ ಬೋನಿಗೆ ಸಿಕ್ಕಿ ಬೀಳುವರು. ಏಕೆಂದರೆ ಸರ್ವೇಶ್ವರನಾದ ನನ್ನ ಮಾತನ್ನು ಅವರು ನಿರಾಕರಿಸಿದ್ದಾರೆ. ಇದು ತಾನೋ ಅವರ ಜ್ಞಾನ?
10ಆದುದರಿಂದಲೇ ಇವರ ಹೆಂಡತಿಯರನ್ನು ಅನ್ಯರಿಗೂ ಇವರ ಹೊಲಗದ್ದೆಗಳನ್ನು ಆಕ್ರಮಿಸುವವರಿಗೂ ಕೊಟ್ಟು ಬಿಡುವೆನು. ಚಿಕ್ಕವರು ಮೊದಲುಗೊಂಡು ದೊಡ್ಡವರ ತನಕ ಎಲ್ಲರೂ ಅನ್ಯಾಯವಾಗಿ ದೋಚಿಕೊಳ್ಳುತ್ತಲೇ ಇದ್ದಾರೆ. ಪ್ರವಾದಿಗಳು ಮೊದಲಾಗಿ ಯಾಜಕರವರೆಗೆ ಸಕಲರೂ ಮೋಸ ಮಾಡುತ್ತಾರೆ.
11ನನ್ನ ಜನರ ಗಾಯಗಳು ಗುಣವಾಗದಿದ್ದರೂ ಅವು ಮಚ್ಚೆಗಳೋ ಎಂಬಂತೆ 'ಎಲ್ಲ ಚೆನ್ನಾಗಿದೆ' ಎಂದು ಸಮಾಧಾನ ಹೇಳಿ ವಂಚಿಸುತ್ತಿದ್ದಾರೆ.
12ಅಸಹ್ಯ ಕಾರ್ಯಗಳನ್ನು ಮಾಡಿ ಅವಮಾನಕ್ಕೆ ಗುರಿಯಾಗಿದ್ದರೂ ಎಳ್ಳಷ್ಟೂ ನಾಚಿಕೆ ಇಲ್ಲದಿದ್ದಾರೆ. ಲಜ್ಜೆಯ ಗಂಧವೂ ಅವರಿಗಿಲ್ಲ. ಆದ ಕಾರಣ ಬೇರೆಯವರಂತೆ ಅವರೂ ಬೀಳುವರು. ನಾನು ದಂಡಿಸುವಾಗ ಅವರು ಏಳಲಾಗದಂತೆ ಮುಗ್ಗರಿಸಿ ಬೀಳುವರು. ಇದು ಸರ್ವೇಶ್ವರನಾದ ನನ್ನ ನುಡಿ.

13 "ನಾನು ಕೊಯ್ಲಿಗೆ ಕೈಹಾಕಲು ನೋಡಿದೆ. ಆದರೆ ದ್ರಾಕ್ಷೆಯ ಬಳ್ಳಿಗಳಲ್ಲಿ ಹಣ್ಣಿಲ್ಲ, ಅಂಜೂರದ ಮರದಲ್ಲಿ ಫಲವಿಲ್ಲ. ಎಲೆಯೂ ಬಾಡಿಹೋಗಿದೆ. ಪರರ ತುಳಿತಕ್ಕೆ ಈಡಾಗಿ ಇರುವುದು ಕಾಣುತ್ತದೆ. ಇದು ಸರ್ವೇಶ್ವರನಾದ ನನ್ನ ನುಡಿ."

14 ಜನರು: "ನಾವು ಸುಮ್ಮನೆ ಕುಳಿತಿರುವುದೇಕೆ? ಕೂಡಿಬನ್ನಿ, ಕೋಟೆಕೊತ್ತಲುಗಳುಳ್ಳ ಊರುಗಳನ್ನು ಸೇರಿಕೊಳ್ಳೋಣ. ಅಲ್ಲೆ ನಾಶವಾಗೋಣ. ನಮ್ಮ ದೇವರಾದ ಸರ್ವೇಶ್ವರನಿಗೆ ನಾವು ಪಾಪಮಾಡಿದ್ದರಿಂದ ಅವರು ನಮ್ಮನ್ನು ನಾಶಕ್ಕೆ ಗುರಿಮಾಡಿದ್ದಾರೆ. ವಿಷಬೆರೆತ ನೀರನ್ನು ಕುಡಿಯಲು ಕೊಟ್ಟಿದ್ದಾರೆ.
15ಸುಖ ಶಾಂತಿಯನ್ನು ನಿರೀಕ್ಷಿಸಿದೆವು, ಯಾವ ಒಳಿತೂ ಸಿಗಲಿಲ್ಲ. ಸುಕ್ಷೇಮ ಕಾಲವನ್ನು ಎದುರು ನೋಡಿದೆವು. ನಮಗೆ ಗಿಟ್ಟಿದ್ದು ಭಯಭ್ರಾಂತಿ ಮಾತ್ರ.
16ವೈರಿ ಕುದುರೆಗಳ ಬುಸುಗುಟ್ಟುವಿಕೆ ಏಕೆ ಕೇಳಿಬರುತ್ತಿದೆ ದಾನಿನಿಂದ? ನಾಡನ್ನೆ ಕಂಪಿಸುತ್ತಿದೆ ಅವುಗಳ ಕೆನೆತದ ನಾದ. ಶತ್ರುಗಳು ಬಂದೇ ಬಿಟ್ಟರು! ನಾಡನ್ನೂ ಅದರಲ್ಲಿ ಇರುವುದೆಲ್ಲವನ್ನೂ, ನಗರವನ್ನೂ ಅದರ ನಿವಾಸಿಗಳನ್ನೂ ನುಂಗಿಯೇ ಬಿಟ್ಟರು!"

17 ಸರ್ವೇಶ್ವರ: "ಇಗೋ, ನಾನು ನಿಮ್ಮ ಮೇಲೆ ಹಾವುಗಳನ್ನು ಬಿಡುವೆನು. ಅವು ಮಾಯಮಂತ್ರಕ್ಕೆ ಬಾಗದ ನಾಗಸರ್ಪಗಳು! ಅವು ನಿಮ್ಮನ್ನು ಕಚ್ಚದೆ ಬಿಡವು."

### ದೇವಜನರಿಗಾಗಿ ಯೆರೆಮೀಯನ ದುಃಖ

18 ಅಯ್ಯೋ, ನಾನು ಮುಕ್ತನಾಗಿಲ್ಲ ದುಃಖದಿಂದ
ನನ್ನ ಹೃದಯ ಕುಂದಿಹೋಗಿದೆ ಶೋಕದಿಂದ.
19 ಇದೋ, ದೂರ ನಾಡಿನಿಂದ ಕೇಳಿಬರುತ್ತಿದೆ
ನನ್ನ ಪ್ರಜೆಯೆಂಬಾಕೆಯ ಈ ಮೊರೆ:
"ಸಿಯೋನಿನಲ್ಲಿ ಇನ್ನು ಸರ್ವೇಶ್ವರನಿಲ್ಲವೊ?
ಅದರ ರಾಜನು ಅಲ್ಲಿ ವಾಸವಾಗಿಲ್ಲವೊ?"
ಅದಕ್ಕೆ ಸರ್ವೇಶ್ವರ:
"ಇವರು ತಮ್ಮ ವಿಗ್ರಹಾರಾಧನೆಯಿಂದ
ಅನ್ಯದೇವತೆಗಳ ಶೂನ್ಯರೂಪಗಳಿಂದ
ನನ್ನನ್ನು ಕೆಣಕಿದ್ದೇಕೆ?"
20 ಜನರು: "ಸುಗ್ಗಿ ಮುಗಿಯಿತು, ಹಣ್ಣಿನ ಕಾಲ
ಕಳೆಯಿತು.
ನಮಗಾದರೊ ರಕ್ಷಣೆ ದೊರಕದೆ
ಹೋಯಿತು."

21 ನನ್ನ ಪ್ರಜೆಯೆಂಬಾಕೆಯ ವೇದನೆಯಿಂದಲೆ
ನಾನು ಅನುಭವಿಸುತ್ತಿರುವೆ ಮನೋಯಾತನೆ.
22 ಗಿಲ್ಯಾದಿನಲ್ಲಿ ಔಷಧವಿಲ್ಲವೆ?
ಅಲ್ಲಿ ವೈದ್ಯನು ಸಿಕ್ಕನೆ?
ಮತ್ತೇಕೆ ಗುಣವಾಗಲಿಲ್ಲ ನನ್ನ ಜನತೆಗೆ?

**9** ನನ್ನ ತಲೆ ಒಂದು
ಚಿಲುಮೆಯಾಗಿರಬಾರದಿತ್ತೆ?
ನನ್ನ ಕಣ್ಣು ಒಂದು ಒರತೆಯಾಗಿರಬಾರದಿತ್ತೆ?
ಆಗ ನನ್ನ ಜನರಲ್ಲಿ ಹತರಾದವರಿಗಾಗಿ
ಹಗಲಿರುಳು ಅಳುತ್ತಿದ್ದೆ.
2 ಅಕಟಾ, ದಾರಿಗರು ತಂಗುವ ಗುಡಿಸಲೊಂದು
ಕಾಡಿನಲ್ಲಿ ಸಿಗಬಾರದೆ!
ಆಗ ಜನರನ್ನು ತ್ಯಜಿಸಿಬಿಟ್ಟು ನಾನಲ್ಲಿಗೆ
ತೆರಳುತ್ತಿದ್ದೆ!
ಅವರೆಲ್ಲರು ವ್ಯಭಿಚಾರಿಗಳು, ದ್ರೋಹಿಗಳ
ಗುಂಪೇ ಅಲ್ಲವೆ?
3 ಸರ್ವೇಶ್ವರ:
"ಸುಳ್ಳಾಡಲು ಬಿಲ್ಲಿನಂತೆ ನಾಲಿಗೆ ಬಗ್ಗಿಸುತ್ತಾರೆ
ಸತ್ಯಕ್ಕೆ ಪ್ರತಿಕೂಲವಾಗಿಯೆ ನಾಡಿನಲ್ಲಿ
ಪ್ರಬಲಿಸಿದ್ದಾರೆ
ಕೇಡಿನಿಂದ ಕೇಡಿಗೆ ಹಾರುತ್ತಾರೆ;
ನನ್ನನ್ನಾದರೊ ಅರಿಯದೆ ಇದ್ದಾರೆ."
4 ನಿಮ್ಮ ನಿಮ್ಮ ಗೆಳೆಯರ ವಿಷಯದಲ್ಲಿ
ಎಚ್ಚರಿಕೆಯಾಗಿರಿ
ಯಾರೇ ಆಗಲಿ, ತನ್ನ ಸೋದರನನ್ನೂ
ನಂಬದಿರಲಿ.
ಪ್ರತಿಯೊಬ್ಬ ಸೋದರನು ವಂಚಿಸುವುದರಲ್ಲಿ
ಯಕೋಬನಿಗೆ ಸಮಾನ.
ಒಬ್ಬೊಬ್ಬ ಗೆಳೆಯನೂ ತಿರುಗಾಡುತ್ತಾನೆ
ಚಾಡಿಹೇಳುತ್ತಾ.
5 ಎಲ್ಲರು ತಂತಮ್ಮ ಗೆಳೆಯರಿಗೆ
ಮೋಸಮಾಡುತ್ತಾರೆ
ಸತ್ಯವನ್ನು ನುಡಿವುದೇ ಇಲ್ಲ;
ನಾಳಿಗೆಗೆ ಸುಳ್ಳನ್ನು ಕಲಿಸಿದ್ದಾರೆ
ಆಯಾಸವಾಗುವ ಮಟ್ಟಿಗೂ ಕೆಡಕನ್ನು
ಮಾಡುತ್ತಿದ್ದಾರೆ.
6 'ನೀನು (ಯೆರೆಮೀಯ) ವಾಸವಾಗಿರುವುದು
ಮೋಸಗಾರರ ಮಧ್ಯೆ

ಮೋಸಗಾರರಾಗಿರುವುದರಿಂದಲೆ ಅವರು
ನನ್ನನ್ನು ಅರಿಯಲೊಲ್ಲರು’
ಎನ್ನುತ್ತಾರೆ ಸರ್ವೇಶ್ವರ.
7 ಹೀಗಿರಲು ಸರ್ವಶಕ್ತರಾದ ಸರ್ವೇಶ್ವರನ
ಮಾತನ್ನು ಕೇಳಿ:
“ಅಕಟಾ, ನನ್ನ ಜನರ ದ್ರೋಹಕ್ಕೆ ಏನು
ಮಾಡಲಿ?
ಅವರನ್ನು ಶೋಧಿಸುವೆನು ಪುಟಕ್ಕೆ ಹಾಕಿ!
8 ಅವರ ನಾಲಿಗೆ ಕೊಲ್ಲುವ ಬಾಣ,
ಅದು ಆಡುವುದು ಸುಳ್ಳನ್ನೇ
ಬಾಯಲ್ಲಿ ಶುಭವೆಂದು ಹೇಳಿದರೂ
ಹೃದಯದಲ್ಲಿ ಒಡ್ಡಿದ್ದಾರೆ ಹೊಂಚನ್ನೇ.
9 ಇಂಥವುಗಳಿಗಾಗಿ ನಾನು ಅವರನ್ನು
ಹಿಂಸಿಸಬಾರದೆ?
ಇಂಥ ಜನಾಂಗದ ಮೇಲೆ ಸೇಡನ್ನು
ತೀರಿಸಿಕೊಳ್ಳದಿರುವೆನೆ?”
10 ನಾನು: ಪರ್ವತಗಳಿಗಾಗಿ ಅತ್ತು
ಗೋಳಾಡುವೆನು
ಅಡವಿಯ ಕಾವಲುಗಾಳಿಗಾಗಿ ಶೋಕಗೀತೆ
ಯನ್ನು ಹಾಡುವೆನು
ಅವು ಸುಟ್ಟುಹೋಗಿವೆ, ಯಾರೂ ಅಲ್ಲಿ
ಹಾದುಹೋಗರು.
ದನಕರುಗಳ ಸದ್ದೂ ಕಿವಿಗೆ ಬೀಳದು
ತೊಲಗಿಹೋಗಿವೆ ಮೃಗಪಕ್ಷಿಗಳೂ!
11 ಸರ್ವೇಶ್ವರ:
“ಹಾಳು ದಿಬ್ಬಗಳನ್ನಾಗಿಸುವೆನು
ಜೆರುಸಲೇಮನ್ನು
ನರಿಗಳ ಹಕ್ಕೆಯನ್ನಾಗಿಸುವೆನು ಜುದೇಯ
ಪಟ್ಟಣಗಳನ್ನು
ಜನರಿಲ್ಲದ ಬೀಳುಭೂಮಿಯನ್ನಾಗಿಸುವೆನು
ಅವುಗಳನ್ನು.”

12 ನಾನು: “ಈ ನಾಡು ಯಾರೂ ಹಾದು ಹೋಗದಷ್ಟು ಹಾಳಾಗಿ ಕಾಡಿನಂತೆ ಸುಟ್ಟು ಹೋದದ್ದು ಏಕೆ? ಈ ವಿಷಯವನ್ನು ಗ್ರಹಿಸತಕ್ಕ ಜ್ಞಾನಿ ಯಾರು? ಅದನ್ನು ಸರ್ವೇಶ್ವರನ ಬಾಯಿಂದಲೆ ಕೇಳಿ ತಿಳಿಸಬಲ್ಲವನಾರು?”

13 ಇಸ್ರಯೇಲಿನ ದೇವರೂ ಸರ್ವಶಕ್ತರೂ ಆದ ಸರ್ವೇಶ್ವರ ಹೀಗೆನ್ನುತ್ತಾರೆ: “ನಾನು ಇವರ ಕಣ್ಣೆದುರಿಗೇ ಇಟ್ಟಿರುವ ಧರ್ಮೋಪದೇಶವನ್ನು ಇವರು ಲಕ್ಷ್ಯಕ್ಕೆ ತಂದುಕೊಳ್ಳಲಿಲ್ಲ. 14ನನ್ನ ಮಾತನ್ನು ಕೇಳದೆ, ಧರ್ಮಮಾರ್ಗದಲ್ಲಿ ನಡೆಯದೆ, ಹಟಮಾರಿಗಳಂತೆ ಸ್ವೇಚ್ಛಾನುಸಾರ ನಡೆದುಕೊಂಡರು. ತಮ್ಮ ಪೂರ್ವಜರು ಕಲಿಸಿಕೊಟ್ಟ ಹಾಗೆ ಬಾಳ್‍ದೇವತೆಗಳನ್ನು ಹಿಂಬಾಲಿಸಿದರು. 15ಆದುದರಿಂದ ಈ ಜನರು ಕಹಿಯಾದ ಇಟ್ಟಿಕಾಯನ್ನು ತಿನ್ನುವಂತೆ ಮಾಡುವೆನು; ವಿಷಬೆರೆತ ನೀರನ್ನು ಕುಡಿಯುವಂತೆ ಮಾಡುವೆನು.

16ಇವರಿಗಾಗಿ ಇವರ ಪೂರ್ವಜರಿಗಾಗಲಿ ಪರಿಚಯವಿಲ್ಲದ ಜನಾಂಗಗಳ ನಡುವೆ ಇವರನ್ನು
ಚದರಿಸಿಬಿಡುವೆನು. ಇವರು ಅಳಿದುಹಾಳಾಗುವ ತನಕ ಇವರ ಹಿಂದೆ ಖಡ್ಗವನ್ನು ಕಳಿಸುವೆನು."

**ಜೆರುಸಲೇಮಿನವರ ಶೋಕಗೀತೆ**

17 ಸರ್ವಶಕ್ತ ಸರ್ವೇಶ್ವರಸ್ವಾಮಿಯ ಮಾತು:
"ನಡೆಯುತ್ತಿರುವ ಕಾರ್ಯಗಳನ್ನು ಆಲೋಚಿಸಿ
ನೋಡಿ
ರೋದನಾ ಗಾಯಕಿಯರನ್ನು ಕರೆಯಿಸಿರಿ
ಅವರಲ್ಲಿ ಜಾಣೆಯರನ್ನು ಕರೆಯ ಕಳಿಸಿರಿ
ಅವರೂ ಬಂದು ಸೇರಲಿ."
18 ಜನರು: "ಅವರು ತ್ವರೆಯಾಗಿಬಂದು
ನಮಗೋಸ್ಕರ ಗೋಳೆತ್ತಲಿ
ನಮ್ಮ ಕಣ್ಣುಗಳಿಂದ ನೀರು ಧಾರಾಕಾರವಾಗಿ
ಸುರಿವಂತೆ ಮಾಡಲಿ
ಕಣ್ಣಿನ ರೆಪ್ಪೆಗಳಿಂದ ನೀರು ಉಕ್ಕಿ ಹರಿವಂತೆ
ಮಾಡಲಿ."
19 ಸಿಯೋನಿನಿಂದ ಕೇಳಿಬಂದ ಪ್ರಲಾಪನೆ:
"ಅಯ್ಯೋ ಹಾಳಾದೆವು,
ನಮ್ಮ ಮಾನಮರ್ಯಾದೆ ಕಳೆದುಹೋಯಿತು!
ನಾವು ನಮ್ಮ ನಾಡನ್ನೇ ಬಿಟ್ಟು ತೊಲಗ
ಬೇಕಾಗಿ ಬಂದಿತು.
(ಶತ್ರುಗಳಿಂದ) ನಮ್ಮ ಮನೆಮಠಗಳು
ನೆಲಸಮವಾದವು."
20 ನಾನು:
"ಮಹಿಳೆಯರೇ,
ಸರ್ವೇಶ್ವರಸ್ವಾಮಿಯ ನುಡಿಯನ್ನು ಕೇಳಿರಿ
ಅವರ ಬಾಯಿಂದ ಹೊರಟ ಮಾತಿಗೆ ಕಿವಿ
ತೆಗೆಯಿರಿ
ನಿಮ್ಮ ಹೆಣ್ಣುಮಕ್ಕಳಿಗೂ ಗೋಳಾಟವನ್ನು
ಕಲಿಸಿರಿ
ಪ್ರತಿಯೊಬ್ಬಳೂ ತನ್ನ ನೆರೆಯವಳಿಗೆ
ಶೋಕಗೀತೆಯನ್ನು ಹೇಳಿಕೊಡಲಿ.
21 ಏಕೆಂದರೆ ಮೃತ್ಯು ನಮ್ಮ ಕಿಟಕಿಗಳನ್ನು
ಏರಿಬಂದಿದೆ
ನಮ್ಮ ಉಪ್ಪರಿಗೆಗಳೊಳಗೆ ನುಗ್ಗಿಬಿಟ್ಟಿದೆ
ಬೀದಿಗಳಲ್ಲಿ ಮಕ್ಕಳೂ ಕಡಿದುಬಿದ್ದರು
ಚೌಕಗಳಲ್ಲಿ ಯುವಕರೂ ಇಲ್ಲವಾದರು.
22 ಜನರ ಹೆಣಗಳು ನೆಲದ ಮೇಲೆ ಬಿದ್ದು
ಗೊಬ್ಬರವಾಗುವುವು
ಅವು ಹೊಲಕೊಯ್ಯುವವನ ಹಿಂದೆ ಯಾರೂ

ಕೂಡಿಸದೆ ಬಿದ್ದಿರುವ ಅರಿಗಳಂತಿರುವುವು
–ಈ ಮಾತುಗಳನ್ನು ಸಾರುವಂತೆ ಸರ್ವೇಶ್ವರ
ನಿಂದ ನನಗೆ ಅಪ್ಪಣೆಯಾಯಿತು.”
23 ಸರ್ವೇಶ್ವರಸ್ವಾಮಿ:
“ಜ್ಞಾನಿ ತನ್ನ ಜ್ಞಾನಕ್ಕಾಗಿ, ಪರಾಕ್ರಮಿ ತನ್ನ
ಪರಾಕ್ರಮಕ್ಕಾಗಿ
ಐಶ್ವರ್ಯವಂತ ತನ್ನ ಐಶ್ವರಕ್ಕಾಗಿ ಹೆಚ್ಚಳ
ಪಡದಿರಲಿ.
24 ಹೆಚ್ಚಳಪಡುವವನು ನನ್ನನ್ನು ತಾನು
ತಿಳಿದುಕೊಂಡದ್ದಕ್ಕಾಗಿ ಹೆಚ್ಚಳಪಡಲಿ;
ಜಗದಲ್ಲಿ ಅಚಲ ಪ್ರೀತಿಯನ್ನೂ ನ್ಯಾಯ
ನೀತಿಯನ್ನೂ
ತೋರ್ಪಡಿಸುವ ಸರ್ವೇಶ್ವರ ನಾನೇ;
ನನಗೆ ಪ್ರಿಯವಾದುವು ಪ್ರೀತಿ, ನೀತಿ,
ನ್ಯಾಯಗಳೇ.
ಇದನ್ನು ಗ್ರಹಿಸಿಕೊಂಡದ್ದಕ್ಕಾಗಿ ಹೆಚ್ಚಳ
ಪಡಲಿ.
ಇದು ಸರ್ವೇಶ್ವರನಾದ ನನ್ನ ನುಡಿ.”
25 “ಈಜಿಪ್ಟರು, ಯೆಹೂದ್ಯರು, ಎದೋಮ್ಯರು, ಅಮ್ಮೋನ್ಯರು, ಮೊವಾಬ್ಯರು, ಮುಂದಲೆ
ಕೂದಲನ್ನು ಕತ್ತರಿಸಿಕೊಳ್ಳುವ ಅರಣ್ಯನಿವಾಸಿಗಳು, ಅಂತು ದೇಹದಲ್ಲಿ ಮಾತ್ರ ಸುನ್ನತಿಯುಳ್ಳವರು,
ಇವರೆಲ್ಲರನ್ನು ದಂಡಿಸುವ ದಿನಗಳು ಬರುತ್ತವೆ. 26ಏಕೆಂದರೆ ಈ ಎಲ್ಲ ಜನಾಂಗದವರು, ಇಸ್ರಯೇಲ್
ವಂಶದವರು ಕೂಡ, ಹೃದಯದಲ್ಲಿ ಸುನ್ನತಿಯಿಲ್ಲದವರು. ಇದು ಸರ್ವೇಶ್ವರನಾದ ನಾನು ಆಡುವ ಮಾತು.”

### ನಿಜವಾದ ಆರಾಧನೆ

**10** ಇಸ್ರಯೇಲ್ ವಂಶದವರೇ, ಸರ್ವೇಶ್ವರ
ಸ್ವಾಮಿ ನಿಮಗೆ ನುಡಿಯುವ ಮಾತನ್ನು
ಕೇಳಿರಿ;
ಅವರು ಹೇಳುವುದು ಇದು:
2 “ಅನ್ಯಜನಾಂಗಗಳ ಆಚರಣೆಯನ್ನು
ಅನುಸರಿಸಬೇಡಿ
ಅವರು ಹೆದರುವ ಆಕಾಶದ ಉತ್ಪಾತಗಳಿಗೆ
ನೀವು ಹೆದರಬೇಡಿ.
3 ಆ ಜನಾಂಗಗಳ ಧಾರ್ಮಿಕ ಪದ್ಧತಿಗಳು
ಶೂನ್ಯ.
ಅರಣ್ಯದ ಮರಗಳನ್ನು ಅವರು ಕತ್ತರಿಸು
ತ್ತಾರೆ
ಬಡಗಿಯ ಕೈಯಿಂದ, ಅವನ ಉಳಿಯಿಂದ,
ಅದನ್ನು ರೂಪಿಸುತ್ತಾರೆ.
4 ಅದನ್ನು ಅಲಂಕರಿಸುತ್ತಾರೆ ಬೆಳ್ಳಿಬಂಗಾರ

ಗಳಿಂದ
ಅದು ಅಲುಗದ ಹಾಗೆ ಭದ್ರಪಡಿಸುತ್ತಾರೆ
ಮೊಳೆಸುತ್ತಿಗೆಯಿಂದ.
5 ಸೌತೆ ತೋಟದ ಬೆದರುಗಂಬದಂತಿರುವ
ಈ ಬೊಂಬೆಗಳು ಮಾತನಾಡಲಾರವು.
ಅವನ್ನು ಹೊತ್ತುಕೊಂಡು ಹೋಗಬೇಕು, ಅವು
ನಡೆಯಲಾರವು.
ಅವುಗಳಿಗೆ ನೀವು ಅಂಜಬೇಕಾಗಿಲ್ಲ, ಅವು
ಕೇಡುಮಾಡಲಾರವು;
ಮೇಲುಮಾಡಲಿಕ್ಕೂ ಸಾಮರ್ಥ್ಯ
ವಿಲ್ಲದಿರುವುವು."
6 ಹೇ ಸರ್ವೇಶ್ವರಾ,
ನಿಮಗೆ ಸಮಾನನು ಇಲ್ಲ, ನೀವು
ಮಹೋತ್ತಮರು
ಸಾಮರ್ಥ್ಯದಿಂದ ಕೂಡಿರುವ ನಿಮ್ಮ ನಾಮವೂ
ಮಹತ್ತರವಾದುದು.
7 ಜನಾಂಗಗಳ ಒಡೆಯಾ, ಅರಸರೇ,
ನಿಮಗೆ ಅಂಜದೆ ಇರುವವರಾರು?
ಹೌದು, ನೀವು ಭಯಭಕ್ತಿಗೆ ಪಾತ್ರರು.
ರಾಷ್ಟ್ರಗಳ ಜ್ಞಾನಿಗಳಲ್ಲೊ
ರಾಜಪರಂಪರೆಯಲ್ಲೊ
ಯಾವನೂ ಇಲ್ಲ ನಿಮಗೆ ಸಮಾನನು.
8 ಕೇವಲ ಪಶುಪ್ರಾಯರು, ಮಂದಮತಿಗಳು,
ಅವರೆಲ್ಲರು
ಬೊಂಬೆ ಪೂಜೆಯಿಂದ ಬರುವ ಜ್ಞಾನ
ಮರದಂತೆ ಮೊದ್ದು.
9 ಆ ಬೊಂಬೆಗಳ ಭೂಷಣಕ್ಕಾಗಿ ಸಾಗಿ
ಬರುತ್ತವೆ
ತಾರ್ಷೀಷಿನಿಂದ ಬೆಳ್ಳೀತಗಡುಗಳು,
ಊಫಜಿನಿಂದ ಚಿನ್ನ.
ಅವು ಕೆತ್ತನೆಗಾರನ, ಎರಕದವನ ಕೈಕೆಲಸಗಳು
ಅವುಗಳ ಉಡುಪು ನೀಲಧೂಮ್ರ ವರ್ಣದ
ವಸ್ತ್ರಗಳು.
ಇವೆಲ್ಲವು ಕೇವಲ ಕಲಾಕುಶಲರ ಕೌಶಲ್ಯಗಳು.
10 ಹೇ ಸರ್ವೇಶ್ವರಾ, ನೀವಾದರೋ ಸತ್ಯದೇವರು,
ಜೀವಸ್ವರೂಪ ದೇವರು, ಶಾಶ್ವತ ರಾಜರು
ನಿಮ್ಮ ಕೋಪಕ್ಕೆ ನಡುಗುತ್ತದೆ ಭೂಲೋಕ
ನಿಮ್ಮ ರೋಷವನ್ನು ತಾಳಲಾರದು ಜನಾಂಗ.

11 "ಭೂಮ್ಯಾಕಾಶಗಳನ್ನು ಸೃಷ್ಟಿಸದ ದೇವರುಗಳು ಭೂಮಿಯ ಮೇಲಿಂದಲೂ ಆಕಾಶದ ಕೆಳಗಿನಿಂದಲೂ ಅಳಿದುಹೋಗುವುವು" ಎಂದು ನೀವು ಆ ಜನಾಂಗಗಳಿಗೆ ತಿಳಿಸಿರಿ.

ದೇವರಿಗೊಂದು ಸ್ತುತಿಗೀತೆ
12 ಸರ್ವೇಶ್ವರ ಭೂಮಿಯನ್ನು ನಿರ್ಮಿಸಿದ್ದಾರೆ
ಶಕ್ತಿಯಿಂದ
ಲೋಕವನ್ನು ಸ್ಥಾಪಿಸಿದ್ದಾರೆ ಜ್ಞಾನದಿಂದ
ಆಕಾಶಮಂಡಲವನ್ನು ಹರಡಿದ್ದಾರೆ
ವಿವೇಕದಿಂದ.
13 ಆಕಾಶದಲ್ಲಿ ನೀರು ಭೋರ್ಗರೆಯುವಂತೆ
ಭುವಿಯ ಕಟ್ಟಕಡೆಯಿಂದ ಮೋಡಗಳು
ಏರುವಂತೆ
ಮಳೆಗಾಗಿ ಮಿಂಚು ಹೊಳೆಯುವಂತೆ
ತಮ್ಮ ಭಂಡಾರದಿಂದ ಗಾಳಿ ಬೀಸುವಂತೆ
– ಮಾಡುತ್ತದೆ ಸರ್ವೇಶ್ವರನಾ ಗರ್ಜನೆ.
14 ಇದರ ಮುಂದೆ ತಿಳುವಳಿಕೆಯಿಲ್ಲದ
ಪಶುಪ್ರಾಯರು ಜನರೆಲ್ಲರು.
ತಾನು ಕೆತ್ತಿದ ವಿಗ್ರಹಕ್ಕಾಗಿ ಹೇಸುವನು
ಪ್ರತಿಯೊಬ್ಬ ಅಕ್ಕಸಾಲಿಗನು.
ಅವನು ಎರಕ ಹೊಯ್ದ ವಿಗ್ರಹಗಳು
ಟೊಳ್ಳು, ಶ್ವಾಸವಿಲ್ಲದವುಗಳು.
15 ಅವು ವ್ಯರ್ಥವಾದುವುಗಳು,
ಹಾಸ್ಯಾಸ್ಪದವಾದುವುಗಳು
ದಂಡನೆಯಕಾಲದಲ್ಲಿ ಅಳಿದು
ಹೋಗುವಂಥವುಗಳು.
16 ಹಾಗಲ್ಲ ಯಕೋಬ್ಯರಿಗೆ ಸ್ವಂತವಾದ ದೇವರು
ಅವರು ಸಮಸ್ತವನ್ನು ಸೃಷ್ಟಿಸಿದವರು.
ಇಸ್ರಯೇಲ್ ಗೋತ್ರ ಅವರಿಗೆ ಸ್ವಾಸ್ತ್ಯ.
'ಸೇನಾಧೀಶ್ವರ ಸರ್ವೇಶ್ವರ' ಅವರ
ನಾಮಧೇಯ.

**ಬರಲಿರುವ ಗಡೀಪಾರು**

17 ಮುತ್ತಿಗೆಗೆ ತುತ್ತಾದ ಜನತೆಯೇ ಗಂಟು ಕಟ್ಟಿಕೊಂಡು ನಾಡುಬಿಟ್ಟು ನಡೆ. 18ಏಕೆಂದರೆ
ಸರ್ವೇಶ್ವರ ನುಡಿವ ಮಾತಿದು: "ಇಗೋ, ಈ ಸಾರಿ ಈ ನಾಡಿನ ನಿವಾಸಿಗಳನ್ನು ಕವಣೆಯ ಕಲ್ಲಂತೆ
ಎಸೆದುಬಿಡುವೆನು; ಬುದ್ಧಿಬರಲೆಂದು ಅವರನ್ನು ಬಾಧಿಸುವೆನು."
19 ಜೆರುಸಲೇಮಿನ ಗೋಳು: "ಅಯ್ಯೋ ನಾನು
ಗಾಯಗೊಂಡೆ
ನನಗೆ ಬಿದ್ದ ಪೆಟ್ಟು ಗಡಸು,
ತಗಲಿದೆ ವ್ಯಾಧಿ, ಸಹಿಸಲೇಬೇದಾ
ಕಾಯಿಲೆ.
20 ನನ್ನ ಗುಡಾರ ಹಾಳಾಗಿದೆ,
ಹಗ್ಗಗಳು ಕಿತ್ತು ಹೋಗಿವೆ.

ಮಕ್ಕಳು ನನ್ನನ್ನು ಬಿಟ್ಟು ಕಾಣದೆ
ಹೋಗಿದ್ದಾರೆ
ಗುಡಾರ ಹಾಕಲು, ಪರದೆ ಬಿಗಿಯಲು,
ಯಾರೂ ಇಲ್ಲವಾಗಿದ್ದಾರೆ.”

### ಯೆರೆಮೀಯನ ಪ್ರಾರ್ಥನೆ

21 ನಮ್ಮ ಪಾಲಕರು ಪಶುಪ್ರಾಯರು
ಸರ್ವೇಶ್ವರನ ಕಡೆಗೆ ಕಣ್ಣೆತ್ತದೆ ಹೋದರು.
ಆ ಕಾರಣ ಅವರ ಕಾರ್ಯಸಾರ್ಥಕವಾಗಲಿಲ್ಲ
ಚದರಿಹೋದವು ಅವರ ಹಿಂಡುಗಳೆಲ್ಲ.
22 ಇದೋ ಸುದ್ದಿ, ಕೇಳಿಬರುತ್ತಿದೆ ಸುದ್ದಿ!
ದೊಡ್ಡ ಕೋಲಾಹಲವೆದ್ದಿದೆ ಉತ್ತರ
ನಾಡಿನಲ್ಲಿ:
‘ಅದನ್ನು ನರಿಗಳ ಬೀಡಾಗಿಸಿರಿ
ಜುದೇಯದ ನಗರಗಳನ್ನು ನಾಶಮಾಡಿ.’
23 ಸರ್ವೇಶ್ವರಾ,
ಮಾನವನ ಗುರಿಸಾಧನೆ ಅವನ
ಸ್ವಾಧೀನದಲ್ಲಿಲ್ಲ.
ಸರಿದಿಸೆಯಲ್ಲಿ ಅವನು ಹೆಜ್ಜೆಯಿಡಲಾರನೆಂದು
ನಿಮಗೆ ಗೊತ್ತಿದೆಯಲ್ಲಾ.
24 ಹೇ ಸರ್ವೇಶ್ವರಾ, ನಮ್ಮನ್ನು ದಂಡಿಸಿ
ಸುಧಾರಿಸಿ
ಆದರೆ ಮಿತಿಮೀರಬೇಡ, ಕೋಪದಿಂದ
ದಂಡಿಸಬೇಡಿ.
ಇಲ್ಲವಾದರೆ ನಾವು ನಶಿಸಿ ನಾಶವಾದೇವು!
25 ಸರ್ವೇಶ್ವರಾ, ನಿಮ್ಮನ್ನು ಅರಿತುಕೊಳ್ಳದವರ
ಮೇಲೆ
ನಿಮ್ಮ ನಾಮವನ್ನು ಉಚ್ಚರಿಸದವರ ಮೇಲೆ
ನಿಮ್ಮ ಕೋಪಾಗ್ನಿಯನ್ನು ಸುರಿದುಬಿಡಿ.
ಅವರು ಯಕೋಬ್ಯರನ್ನು ಕಬಳಿಸಿದ್ದಾರೆ
ಹೌದು, ಪೂರ್ತಿಯಾಗಿ ಕಬಳಿಸಿಬಿಟ್ಟಿದ್ದಾರೆ
ಅವರ ನಿವಾಸಗಳನ್ನು ನಾಶಮಾಡಿದ್ದಾರೆ.

### ಯೆರೆಮೀಯ ಮತ್ತು ಒಪ್ಪಂದ

**11** ಸರ್ವೇಶ್ವರಸ್ವಾಮಿ ಯೆರೆಮೀಯನಾದ ನನಗೆ ದಯಪಾಲಿಸಿದ ವಾಕ್ಯ ಇದು: 2 “ಒಡಂಬಡಿಕೆಯ ಈ
ವಚನಗಳನ್ನು ಕೇಳಿ ಯೆಹೂದ್ಯರಿಗೂ ಜೆರುಸಲೇಮಿನ ನಿವಾಸಿಗಳಿಗೂ ಸಾರು. 3–4ನೀನು ಅವರಿಗೆ
ಹೇಳಬೇಕಾದುದು ಕಬ್ಬಿಣ ಕರಗಿಸುವ ಕುಲುಮೆಯಂತಿದ್ದ ಈಜಿಪ್ಟ್ ದೇಶದಿಂದ ನಿಮ್ಮ ಪೂರ್ವಜರನ್ನು
ನಾನು ಬರಮಾಡಿದಾಗ ಅವರಿಗೆ ‘ನೀವು ನನ್ನ ಮಾತನ್ನು ಕೇಳಿ ನಾನು ನಿಮಗೆ ಆಜ್ಞಾಪಿಸಿರುವ
ವಿಧಿಗಳನ್ನೆಲ್ಲಾ ಕೈಗೊಂಡರೆ ನೀವು ನನ್ನ ಪ್ರಜೆಯಾಗಿರುವಿರಿ; ನಾನು ನಿಮ್ಮ ದೇವರಾಗಿರುವೆನು. 5ಹಾಲೂ

ಜೇನೂ ಹರಿಯುವ ನಾಡನ್ನು, ಅಂದರೆ ಇಂದು ನೀವಿರುವ ನಾಡನ್ನು, ಕೊಡುವುದಾಗಿ ನಿಮ್ಮ ಮೂಲಪಿತೃಗಳಿಗೆ ಮಾಡಿದ ವಾಗ್ದಾನವನ್ನು ನೆರವೇರಿಸುವೆನು' ಎಂದು ಹೇಳಿದ್ದೆ. ಈ ಒಡಂಬಡಿಕೆಯ ವಚನಗಳಿಗೆ ಕಿವಿಗೊಡದವನು ಶಾಪಗ್ರಸ್ತನು. ಇದು ಇಸ್ರಯೇಲಿನ ದೇವರಾದ ಸರ್ವೇಶ್ವರ ಹೇಳುವ ಮಾತು."

ಆಗ ನಾನು, "ತಮ್ಮ ಅಪ್ಪಣೆಯಂತಾಗಲಿ, ಸರ್ವೇಶ್ವರಾ," ಎಂದು ಉತ್ತರಕೊಟ್ಟೆ.

6 ಸರ್ವೇಶ್ವರ ನನಗೆ: "ಜುದೇಯದ ನಗರಗಳಲ್ಲೂ ಜೆರುಸಲೇಮಿನ ಹಾದಿಬೀದಿಗಳಲ್ಲೂ ಈ
ಸಮಾಚಾರವನ್ನು ಹರಡು–ಈ ಒಡಂಬಡಿಕೆಯ ವಚನಗಳನ್ನು ಕೇಳಿ ಅದರಂತೆ ನಡೆದುಕೊಳ್ಳಿರಿ. 7ನಿಮ್ಮ
ಪೂರ್ವಜರನ್ನು ಈಜಿಪ್ಟ್ ದೇಶದಿಂದ ಬರಮಾಡಿದ ದಿನದಿಂದ ಇಂದಿನವರೆಗೂ ನಾನು ಅವರಿಗೆ ನನ್ನ
ಮಾತನ್ನು ಕೇಳಿರೆಂದು ತಡಮಾಡದೆ ಖಂಡಿತವಾಗಿ ಆಜ್ಞಾಪಿಸುತ್ತಾ ಬಂದಿದ್ದೇನೆ. 8ಅವರಾದರೋ ಕೇಳಲಿಲ್ಲ,
ಕಿವಿಗೊಡಲಿಲ್ಲ, ಪ್ರತಿಯೊಬ್ಬನು ತನ್ನ ದುಷ್ಟ ಹೃದಯದ ನಿಮಿತ್ತ ಹಟಮಾರಿಯಂತೆ ನಡೆದುಕೊಂಡನು. ಆದ
ಕಾರಣ, ಕೈಗೊಳ್ಳಬೇಕೆಂದು ನಾನು ಆಜ್ಞಾಪಿಸಿದ್ದರೂ ಅವರು ಕೈಗೊಳ್ಳದೆ ಹೋದ ಆ ಒಡಂಬಡಿಕೆಯಲ್ಲೆ
ಸೂಚಿಸಲಾಗಿರುವ ಶಾಪಗಳನ್ನೆಲ್ಲ ಅವರ ಮೇಲೆ ಬರಮಾಡಿದೆ."

9 ಮತ್ತೆ ಸರ್ವೇಶ್ವರ ನನಗೆ: "ಜುದೇಯದ ಹಾಗು ಜೆರುಸಲೇಮಿನ ನಿವಾಸಿಗಳಲ್ಲಿ ಒಳಸಂಚು
ಕಂಡುಬಂದಿದೆ. 10ನನ್ನ ಮಾತನ್ನು ಕೇಳದೆ ಹೋದ ತಮ್ಮ ಮೂಲಪಿತೃಗಳ ದುಷ್ಕೃತ್ಯಗಳ ಕಡೆ ಈ ಜನರು
ತಿರುಗಿಕೊಂಡಿದ್ದಾರೆ. ಅನ್ಯ ದೇವತೆಗಳನ್ನು ಹಿಂಬಾಲಿಸುತ್ತಿದ್ದಾರೆ. ಅವುಗಳನ್ನು ಪೂಜಿಸುತ್ತಿದ್ದಾರೆ. ನಾನು
ಅವರ ಪೂರ್ವಜರ ಸಂಗಡ ಮಾಡಿಕೊಂಡ ಒಡಂಬಡಿಕೆಯನ್ನು ಇಸ್ರಯೇಲ್ ವಂಶದವರೂ ಜುದೇಯ
ವಂಶದವರೂ ಮೀರಿದ್ದಾರೆ. 11ಆದಕಾರಣ ಸರ್ವೇಶ್ವರನಾದ ನಾನು ಹೇಳುವುದೇನೆಂದರೆ: ಇಗೋ,
ತಪ್ಪಿಸಿಕೊಳ್ಳಲಾಗದ ಕೇಡನ್ನು ಅವರ ಮೇಲೆ ಬರಮಾಡುವೆನು. ಇವರು ನನಗೆ ಮೊರೆಯಿಟ್ಟರೂ ನಾನೂ
ಕಿವಿಗೊಡೆನು. 12ಆಗ ಜುದೇಯದ ನಗರದವರೂ ಜೆರುಸಲೇಮಿನ ನಿವಾಸಿಗಳೂ ಯಾವ ದೇವತೆಗಳಿಗೆ
ಧೂಪಾರತಿಯೆತ್ತಿದರೋ ಅವುಗಳನ್ನು ಮರೆಹೊಕ್ಕು ಕೂಗಿಕೊಳ್ಳುವರು. ಆದರೆ ಅಂಥ ಕೇಡಿನ ಕಾಲದಲ್ಲಿ ಆ
ದೇವತೆಗಳಿಂದ ಅವರಿಗೆ ಯಾವ ರಕ್ಷಣೆಯೂ ದೊರಕದು. 13ಎಲೈ ಯೆಹೂದ ಜನರೇ, ನಿಮಗೆ ಎಷ್ಟು
ನಗರಗಳಿವೆಯೋ ಅಷ್ಟೂ ದೇವರುಗಳಿದ್ದಾರೆ. ಜೆರುಸಲೇಮಿನಲ್ಲಿ ಹಾದಿಬೀದಿಗಳು ಎಷ್ಟಿವೆಯೋ ಅಷ್ಟೂ
ಬಲಿಪೀಠಗಳಿವೆ, ಆ ತುಚ್ಛ ದೇವತೆ ಬಾಳನಿಗೆ ಧೂಪಾರತಿಯೆತ್ತಲು. 14ಆದುದರಿಂದ ಯೆರೆಮೀಯನೇ,
ಈ ಜನರ ಪರವಾಗಿ ಬೇಡಿಕೊಳ್ಳಬೇಡ. ಇವರಿಗಾಗಿ ಮೊರೆಯಿಡಬೇಡ, ಪ್ರಾರ್ಥಿಸಲೂಬೇಡ. ಅವರಿಗೆ
ಕೇಡು ಬಂದಾಗ ನನ್ನನ್ನು ಗೋಗರೆದರೂ ನಾನು ಕೇಳುವುದಿಲ್ಲ.

15 "ನನಗೆ ಆಪ್ತವಾದ ಜನತೆಯು, ನನಗೆ ಅಸಹ್ಯಕಾರ್ಯಗಳನ್ನು ಮಾಡಿದ್ದೇಕೆ? ನನ್ನ ಆಲಯದಲ್ಲಿ
ಅದಕ್ಕಿರುವ ಹಕ್ಕಾದರೂ ಏನು? ವ್ರತಗಳ ಮೂಲಕ, ಪಶುಬಲಿ ಮಾಂಸದ ಮೂಲಕ ಅದು ಬರಲಿರುವ
ದಂಡನೆಯನ್ನು ತಡೆಗಟ್ಟಬಲ್ಲದೆ? 16ಸರ್ವೇಶ್ವರನಾದ ನಾನು ಅದಕ್ಕೆ "ಸುಂದರ ಫಲದಿಂದ ಕೂಡಿದ
ಚೆಲುವಾದ ಹಚ್ಚನೆಯ ಓಲಿವ್ ಮರ' ಎಂದು ಹೆಸರಿಟ್ಟೆ. ಆದರೆ ಅದೇ ಮರಕ್ಕೆ ಬೆಂಕಿಯಿಟ್ಟು ಧಗಧಗನೆ
ಉರಿಯುವಂತೆ ಮಾಡುವೆನು. ಅದರ ರೆಂಬೆಗಳು ಸುಟ್ಟುಹೋಗುವುವು.

17 "ಸರ್ವಶಕ್ತ ಸರ್ವೇಶ್ವರನಾದ ನಾನೇ ಈ ಇಸ್ರಯೇಲನ್ನೂ ಜುದೇಯವನ್ನೂ ನೆಟ್ಟೆ ಬೆಳೆಸಿದೆ.
ಆದರೆ ಈಗ 'ನಿನಗೆ ಕೇಡು,' ಎಂದು ಶಪಿಸುತ್ತಿದ್ದೇನೆ. ಏಕೆಂದರೆ ಬಾಳನಿಗೆ ಧೂಪಾರತಿಯೆತ್ತಿ, ನನ್ನನ್ನು
ಕೆಣಕಿ, ತಮಗೇ ಕೆಡುಕನ್ನು ಮಾಡಿಕೊಂಡಿದ್ದಾರೆ.

**ಯೆರೆಮೀಯನ ಕೊಲೆಗೆ ಸಂಚು**

18 ಸರ್ವೇಶ್ವರಸ್ವಾಮಿ ತಿಳಿಸಿದ್ದರಿಂದಲೇ ಶತ್ರುಗಳು ನನಗೆ ವಿರುದ್ಧ ಹೂಡಿದ್ದ ಕುತಂತ್ರವು ನನಗೆ
ಗೊತ್ತಾಯಿತು. ಅವರ ಕೃತ್ಯಗಳನ್ನು ನನಗೆ ತೋರಿಸಲಾಯಿತು. 19ನಾನಾದರೋ ವಧೆಗೆ ಒಯ್ಯುವ ಸಾಧು
ಕುರಿಯಂತೆ ಇದ್ದೆ. "ಮರವನ್ನು ಫಲಸಹಿತ ನಾಶಪಡಿಸೋಣ, ಜೀವ ಲೋಕದಿಂದ ಇವನನ್ನು ನಿರ್ಮೂಲ

ಮಾಡೋಣ. ಅವನ ಹೆಸರೇ ಇಲ್ಲದಂತಾಗಲಿ," ಎಂದು ಅವರು ಕುಯುಕ್ತಿ ಕಲ್ಪಿಸಿದ್ದರು. ಆದರೆ ನನಗೆ ಅದು ತಿಳಿದಿರಲಿಲ್ಲ.

20 ಆಗ ನಾನು, "ಸೇನಾಧೀಶ್ವರರಾದ ಸರ್ವೇಶ್ವರಾ, ನೀವು ಹೃನ್ಮನಗಳನ್ನು ಪರೀಕ್ಷಿಸಿ ನ್ಯಾಯವಾದ ತೀರ್ಪನ್ನು ನೀಡುವವರು. ನೀವು ಅವರಿಗೆ ಮಾಡುವ ಪ್ರತೀಕಾರವನ್ನು ನಾನು ಕಾಣುವೆನು. ನನ್ನ ವ್ಯಾಜ್ಯವನ್ನು ನಿಮ್ಮ ಕೈಗೊಪ್ಪಿಸಿದ್ದೇನೆ," ಎಂದೆನು.

21 ಹೀಗಿರಲು, "ಸರ್ವೇಶ್ವರನ ಹೆಸರೆತ್ತಿ ಪ್ರವಾದನೆ ಮಾಡಬೇಡ, ಮಾಡಿದರೆ ನಮ್ಮ ಕೈಯಿಂದಲ ನೀನು ಸಾಯುವೆ," ಎಂದು ಅನಾತೋತಿನವರು ನನ್ನ ಪ್ರಾಣಕ್ಕೆ ಹೊಂಚು ಹಾಕುತ್ತಿದ್ದರು. 22ಅವರ
ವಿಷಯವಾಗಿ ಸರ್ವೇಶ್ವರ, "ಇಗೋ ಅವರನ್ನು ನಾನು ದಂಡಿಸಿಯೇ ತೀರುವೆನು. ಅವರ ಯುವಕರು ಕತ್ತಿಗೆ ತುತ್ತಾಗುವರು. ಅವರ ಗಂಡುಹೆಣ್ಣು ಮಕ್ಕಳು ಕ್ಷಾಮದಿಂದ ಸಾಯುವರು. 23ದಂಡನೆಯ ಕಾಲವನ್ನು ಗೊತ್ತು
ಮಾಡಿರುವೆನು. ಅದು ಬಂದಾಗ ಅವರಲ್ಲಿ ಯಾರೂ ಉಳಿಯರು. ಇದು ನನ್ನ ತೀರ್ಮಾನ," ಎಂದರು.

### ಯೆರೆಮೀಯನು ಹಾಕಿದ ಪ್ರಶ್ನೆ

**12** ಸರ್ವೇಶ್ವರಾ, ನೀವು ಸತ್ಯಸ್ವರೂಪಿ.
ನಿಮ್ಮೊಡನೆ ವ್ಯಾಜ್ಯ ನನಗೆ ಅಸಾಧ್ಯ.
ಆದರೂ ನಿಮ್ಮೊಡನೆ
ಚರ್ಚಿಸಬೇಕೆಂದಿರುವೆ ಈ ನ್ಯಾಯ:
ದುರುಳರ ಬಾಳು ಬೆಳಗುತ್ತಿರುವುದು ಏಕೆ?
ದ್ರೋಹಿಗಳೆಲ್ಲರು ನೆಮ್ಮದಿಯಾಗಿರುವುದು
ಏಕೆ?
2 ಅವರನ್ನು ನಾಟಿ ಮಾಡಿದವರು ನೀವು
ಬೇರೂರಿ ಬೆಳೆದು ಹಣ್ಣುಬಿಡುತ್ತಿದ್ದಾರೆ
ಅವರು.
ನೀವು ಅವರ ಅಧರಕ್ಕೆ ಹತ್ತಿರ, ಹೃದಯಕ್ಕೆ
ದೂರ.
3 ಸರ್ವೇಶ್ವರಾ, ನನ್ನ ಪರಿಚಯ ನಿಮಗಿದೆ
ನಿಮ್ಮ ನೋಟ ನನ್ನ ಮೇಲಿದೆ.
ನನ್ನ ಹೃದಯ ನಿಮ್ಮೊಂದಿಗಿದೆ,
ಇದರ ಪರೀಕ್ಷೆ ನಿಮ್ಮಿಂದಾಗಿದೆ.
ಅವರನ್ನೋ, ಕುರಿಗಳೋ ಎಂಬಂತೆ ಕೊಲೆಗೆ
ಕರೆದೊಯ್ಯಿರಿ
ವಧ್ಯ ದಿವಸದವರೆಗೂ ಅವರನ್ನು ವಿಂಗಡಿಸಿಡಿ.
4 ಇನ್ನೆಷ್ಟರವರೆಗೆ ನಾಡು ದುಃಖಿಸುತ್ತಿರಬೇಕು?
ಅದರ ಎಲ್ಲೆಎಲ್ಲೆಗಳಲ್ಲಿ ಹುಲ್ಲುಸೊಪ್ಪು
ಒಣಗಿರಬೇಕು?
ನಾಡಜನರ ನೀಚತನದ ನಿಮಿತ್ತ
ಮಾಯವಾಗಿವೆ ಪ್ರಾಣಿಪಕ್ಷಿಗಳು ಕೂಡ.
'ನಮ್ಮ ನಡತೆಯನ್ನು ಗಮನಿಸರು ದೇವರು'
ಎಂದುಕೊಳ್ಳುತ್ತಿರುವರು ಆ ಜನರು.
5 (ಆಗ ಸರ್ವೇಶ್ವರ ನನಗೆ):

"ಕಾಲಾಳುಗಳ ಸಂಗಡ ಓಡಲು
ಆಯಾಸಗೊಂಡೆಯಾದರೆ
ಕುದುರೆಗಳೊಂದಿಗೆ ಓಡಿ ಹೇಗೆ ಹೋರಾಡುವೆ?
ಪ್ರಶಾಂತ ಪ್ರದೇಶದಲ್ಲಿ ನಿರ್ಭಯನಾಗಿ
ನಿಲ್ಲಲಾರೆಯಾದರೆ
ಜೋರ್ಡಾನಿನ ದಟ್ಟ ಅಡವಿಯಲ್ಲಿ ಏನು
ಮಾಡಬಲ್ಲೆ?
6 ನಿನ್ನ ಸೋದರರೇ, ನಿನ್ನ ತೌರುಮನೆಯವರೇ
ನಿನಗೆ ದ್ರೋಹವೆಸಗಿದ್ದಾರೆ.
ಇವರೇ ನಿನ್ನ ಬೆನ್ನಟ್ಟಿಬಂದು ಧಿಕ್ಕಾರ
ಕೂಗಿದ್ದಾರೆ.
ಇಂತಿರಲು, ಇವರು ಸವಿನುಡಿದರೂ ನಂಬಲೆ
ಬೇಡ."

### ಸ್ವಜನರ ಪರಿಸ್ಥಿತಿಗಾಗಿ ಸರ್ವೇಶ್ವರನ ಶೋಕ

7 "ನಾನು ನನ್ನ ಮನೆಯನ್ನೇ ತೊರೆದಿದ್ದೇನೆ
ನನ್ನ ಸ್ವಂತ ಸೊತ್ತನ್ನೇ ನಿರಾಕರಿಸಿದ್ದೇನೆ
ನನಗೆ ಪ್ರಾಣಪ್ರಿಯರಾದ ಜನರನ್ನು
ಅವರ ಶತ್ರುಗಳ ಕೈಗೊಪ್ಪಿಸಿದ್ದೇನೆ.
8 ನನ್ನ ಸೊತ್ತಾದ ಜನತೆ ನನ್ನ ಪಾಲಿಗೆ ಅರಣ್ಯದ
ಸಿಂಹದಂತೆ
ನನಗೆದುರಾಗಿ ಅದು ಗರ್ಜಿಸಿದೆ,
ಎಂದೇ ಅದನ್ನು ಹಗೆಮಾಡಿರುವೆ.
9 ನನ್ನ ಸೊತ್ತಾದ ಜನತೆ
ನನ್ನ ದೃಷ್ಟಿಗೆ ಚಿತ್ರವರ್ಣದ ಪಕ್ಷಿಯಂತೆ
ಅದರ ಸುತ್ತ ರಣಹದ್ದುಗಳ ಕೂಟ ಸೇರಿದೆ
ಕಾಡುಮೃಗಗಳನ್ನೆಲ್ಲ ಕರೆದುತನ್ನಿ ಅದನ್ನು
ತಿಂದುಬಿಡಲಿಕ್ಕೆ.
10 ಬಹು ಮಂದಿ ಕುರಿಗಾಹಿಗಳು ಬಂದು
ಹಾಳುಮಾಡಿದ್ದಾರೆ ನನ್ನ ದ್ರಾಕ್ಷಾತೋಟ
ವನ್ನು.
ತುಳಿದುಹಾಕಿದ್ದಾರೆ ನನ್ನಾ ಸೊತ್ತನ್ನು
ಕಾಡನ್ನಾಗಿಸಿದ್ದಾರೆ ಆ ನನ್ನ ಪ್ರಿಯ
ಆಸ್ತಿಯನ್ನು.
11 ಹೌದು, ಹಾಳು ಮಾಡಿದ್ದಾರೆ
ಪಾಳುಬಿದ್ದು ಅದು ನನಗೆ ಗೋಳಿಡುತ್ತಿದೆ
ಯಾವನೂ ಗಮನಕ್ಕೆ ತಂದುಕೊಳ್ಳದೆ
ನಾಡೆಲ್ಲ ಬಿಕೋ ಎನ್ನುತ್ತಿದೆ.
12 ನಾಡಿನ ಒಂದು ಕಡೆಯಿಂದ ಮತ್ತೊಂದು
ಕಡೆಯವರೆಗೆ

ಕೊಳ್ಳೆಗಾರರು ಕಾಡುಗುಡ್ಡೆಗಳ ಮೇಲೆಲ್ಲ
ಕಂಡುಬಂದಿದ್ದಾರೆ.
ಕಬಳಿಸಿಬಿಡುವುದು ನನ್ನ ಖಡ್ಗ
ಯಾರಿಗು ನೆಮ್ಮದಿಯಿಲ್ಲದ ಹಾಗೆ.
13 ಜನರು ಗೋದಿಯನ್ನು ಬಿತ್ತಿದರು
ಆದರೆ ಮುಳ್ಳುಗಿಡವನ್ನು ಕೊಯ್ದರು !
ಕ್ಷೇಮಕೆಡುವಷ್ಟು ಪ್ರಯಾಸಪಟ್ಟರು
ಆದರೆ ಯಾವ ಲಾಭವೂ ಗಿಟ್ಟದೆ
ಹೋಯಿತು.
ತಮ್ಮ ಬೆಳೆಯ ವಿಷಯವಾಗಿ
ಹೇಸಬೇಕಾಯಿತು
ನನ್ನ ಕೋಪಾಗ್ನಿಯೆ ಇದಕ್ಕೆ
ಕಾರಣವಾಯಿತು."

### ಅಕ್ಕಪಕ್ಕ ನಾಡುಗಳಿಗೆ ಕೊಟ್ಟ ಎಚ್ಚರಿಕೆ

14 ಸರ್ವೇಶ್ವರ ಸ್ವಜನರಾದ ಇಸ್ರಯೇಲರಿಗೆ ದಯಪಾಲಿಸಿದ ಸೊತ್ತಿಗೆ ಕೈಹಾಕುವ ಕೆಟ್ಟ ನೆರೆಯವರಿಗೆ
ಕೊಟ್ಟ ಎಚ್ಚರಿಕೆ: "ಈ ನಾಡಿನವರನ್ನು ಅವರವರ ನಾಡಿನಿಂದಲೇ ಸಸಿಯಂತೆ ಕಿತ್ತು ಬಿಡುವೆನು. (ಅವರ
ಮಧ್ಯೆಯಿಂದ ಕಿತ್ತುಬಿಡುವೆನು ಯೆಹೂದ ವಂಶವನ್ನು).
15ಆದರೆ ಅವರನ್ನು ಕಿತ್ತುಹಾಕಿದ ಮೇಲೆ ಮತ್ತೆ
ಅವರಿಗೆ ಕನಿಕರಿಸುವೆನು. ಪ್ರತಿಯೊಬ್ಬನನ್ನು ಅವನವನ ಆಸ್ತಿಪಾಸ್ತಿಗೆ ಅವನವನ ನಾಡಿಗೆ ಮರಳಿ
ಬರಮಾಡುವೆನು.
16ನನ್ನ ಜನರಿಗೆ ಬಾಳ್‍ದೇವತೆಯ ಹೆಸರೆತ್ತಿ ಪ್ರಮಾಣಮಾಡುವ ಅಭ್ಯಾಸವನ್ನು ಮೊದಲು
ಕಲಿಸಿಕೊಟ್ಟವರು ಇವರೇ. ಈಗ ನನ್ನ ಜನರ ಮಾರ್ಗವನ್ನು ಅವಲಂಬಿಸಿ ನನ್ನ ಹೆಸರೆತ್ತಿ, "ಸರ್ವೇಶ್ವರನ
ಜೀವದಾಣೆ" ಎಂದು ಪ್ರಮಾಣ ಮಾಡುವುದನ್ನು ಕಲಿತರೆ ನನ್ನ ಜನರ ನಡುವೆ ನೆಲೆಗೊಂಡು
ವೃದ್ಧಿಯಾಗುವರು.
17ಆದರೆ ಯಾವ ಜನಾಂಗ ಕೇಳುವುದಿಲ್ಲವೋ ಅದನ್ನು ನಾನು ಕಿತ್ತುಹಾಕುವೆನು.
ಹೌದು, ಬೇರುಸಹಿತ ಕಿತ್ತುಹಾಕಿ ನಾಶಮಾಡುವೆನು. ಇದು ಸರ್ವೇಶ್ವರನಾದ ನನ್ನ ನುಡಿ."

### ನಡುಕಟ್ಟಿನ ಸಂಕೇತ

**13** ಸರ್ವೇಶ್ವರಸ್ವಾಮಿ ನನಗೆ: "ನೀನು ಹೋಗಿ ನಾರಿನ ನಡುಕಟ್ಟು ಒಂದನ್ನು ಕೊಂಡುಕೊಂಡು ಸೊಂಟಕ್ಕೆ
ಬಿಗಿದುಕೊ. ಅದನ್ನು ನೀರಿನಲ್ಲಿ ನೆನೆಸಬೇಡ," ಎಂದು ಅಪ್ಪಣೆ ಕೊಟ್ಟರು.
2ನಾನು ಅವರ ಮಾತಿನಂತೆ
ನಡುಕಟ್ಟನ್ನು ಕೊಂಡುಕೊಂಡು ಸೊಂಟಕ್ಕೆ ಬಿಗಿದುಕೊಂಡೆ.
3–4ಆಮೇಲೆ, "ನೀನು ಸೊಂಟಕ್ಕೆ ಬಿಗಿದ ಆ
ನಡುಕಟ್ಟನ್ನು ತೆಗೆದುಕೊಂಡು ಯೂಫ್ರೆಟಿಸ್ ನದಿಗೆ ಹೋಗು. ಅದನ್ನು ಅಲ್ಲಿಯ ಬಂಡೆಯ ಸಂದಿನೊಳಗೆ
ಬಚ್ಚಿಡು," ಎಂಬುದಾಗಿ ಸರ್ವೇಶ್ವರಸ್ವಾಮಿಯ ಎರಡನೆಯ ಆದೇಶ ನನಗೆ ಬಂದಿತು.
5ಅವರ ಅಪ್ಪಣೆಯ
ಮೇರೆಗೆ ನಾನು ಹೋಗಿ ಯೂಫ್ರೆಟಿಸ್ ನದಿಯ ಬಳಿಯಲ್ಲಿ ಅದನ್ನು ಬಚ್ಚಿಟ್ಟೆ.
6ಬಹು ದಿನಗಳ ಮೇಲೆ
ಸರ್ವೇಶ್ವರ ನನಗೆ, "ಹೊರಡು, ಯೂಫ್ರೆಟಿಸ್ ನದಿಗೆ ಹೋಗಿ ಅಲ್ಲಿ ಬಚ್ಚಿಡಬೇಕೆಂದು ನಾನು ಅಪ್ಪಣೆಕೊಟ್ಟ
ನಡುಕಟ್ಟನ್ನು ಅಲ್ಲಿಂದ ತೆಗೆ," ಎಂದು ಹೇಳಿದರು.
7ಆಗ ನಾನು ಯೂಫ್ರೆಟಿಸ್ ನದಿಗೆ ಹೋಗಿ ಹುಡುಕಿ
ನಾನು ಬಚ್ಚಿಟ್ಟ ಸ್ಥಳದಿಂದ ಆ ನಡುಕಟ್ಟನ್ನು ತೆಗೆದೆ. ಆದರೆ ಅದು ಕೆಟ್ಟು ಯಾವ ಕೆಲಸಕ್ಕೂ ಬಾರದ್ದಾಗಿತ್ತು.
8ಆಗ ಸರ್ವೇಶ್ವರ ನನಗೆ ದಯಪಾಲಿಸಿದ ವಾಕ್ಯವೇನೆಂದರೆ:
9"ಇದು ಸರ್ವೇಶ್ವರನಾದ ನನ್ನ ನುಡಿ – ಈ
ಪ್ರಕಾರವಾಗಿಯೇ ನಾನು ಜುದೇಯದ ದೊಡ್ಡಸ್ತಿಕೆಯನ್ನು ಹಾಗು ಜೆರುಸಲೇಮಿನ ಘನವಾದ
ದೊಡ್ಡಸ್ತಿಕೆಯನ್ನು ತೆಗೆದುಬಿಡುವೆನು.
10ಈ ದುಷ್ಟ ಜನರು ನನ್ನ ಮಾತುಗಳನ್ನು ಕೇಳಲೊಲ್ಲರು. ತಮ್ಮ
ಹೃದಯದ ಒರಟುತನದಂತೆ ನಡೆದುಬರುತ್ತಿದ್ದಾರೆ. ಅನ್ಯದೇವತೆಗಳನ್ನು ಹಿಂಬಾಲಿಸಿ, ಪೂಜಿಸುತ್ತಿದ್ದಾರೆ.

ಇವರು ಯಾವ ಕೆಲಸಕ್ಕೂ ಬಾರದ ಈ ನಡುಕಟ್ಟಿಗೆ ಸಾಟಿಯಾಗುವರು. 11ಇಸ್ರಯೇಲ್ ವಂಶವೆಲ್ಲವು ಹಾಗು
ಜುದೇಯ ವಂಶವೆಲ್ಲವು ನನಗೆ ಪ್ರಜೆಯಾಗಿರಲಿ; ನನಗೆ ಕೀರ್ತಿ, ಗೌರವ ತರಲಿ, ನನಗೆ ಆಭರಣವಾಗಿರಲಿ
ಎಂದುಕೊಂಡೆ. ನಡುಕಟ್ಟನ್ನು ಸೊಂಟಕ್ಕೆ ಬಿಗಿದುಕೊಳ್ಳುವಂತೆ ಇವರನ್ನು ಬಿಗಿದುಕೊಂಡಿದ್ದೆ. ಆದರೂ ಇವರು
ನನಗೆ ಕಿವಿಗೊಡದೆ ಹೋದರು. ಇದು ಸರ್ವೇಶ್ವರನಾದ ನನ್ನ ನುಡಿ."

**ಹೆಂಡಕುಡಿಕೆಗಳ ಸಂಕೇತ**

12 "ಯೆರೆಮೀಯನೇ, ನೀನು ಅವರಿಗೆ ಹೀಗೆಂದು ಸಾರು: ಇಸ್ರಯೇಲಿನ ದೇವರಾದ
ಸರ್ವೇಶ್ವರಸ್ವಾಮಿಯ ಸಂದೇಶವನ್ನು ಕೇಳಿ – 'ಪ್ರತಿಯೊಂದು ಕುಡಿಕೆಯು ದ್ರಾಕ್ಷಾರಸದಿಂದ
ತುಂಬಿರುವುದು.' ಆಗ ಅವರು ನಿನಗೆ – 'ಪ್ರತಿಯೊಂದು ಕುಡಿಕೆ ದ್ರಾಕ್ಷಾರಸದಿಂದ ತುಂಬಿರುವುದು
ಎಂಬುದು ನಮಗೆ ಗೊತ್ತಿಲ್ಲವೆ?' ಎಂದು ಹೇಳುವರು. 13ಆಗ ನೀನು ಅವರಿಗೆ – ಸರ್ವೇಶ್ವರ ಸ್ವಾಮಿಯ
ಈ ಸಂದೇಶವನ್ನು ಕೇಳಿ:

'ದಾವೀದನ ಸಿಂಹಾಸನವನ್ನೇರಿದ ಅರಸರನ್ನೂ ಯಾಜಕರನ್ನೂ ಪ್ರವಾದಿಗಳನ್ನೂ ಜೆರುಸಲೇಮಿನ
ಎಲ್ಲ ನಿವಾಸಿಗಳನ್ನೂ, ಅಂತು ನಾಡಿನ ಜನರೆಲ್ಲರನ್ನೂ ಅಮಲಿನಿಂದ ಮತ್ತರಾಗುವಂತೆ ಮಾಡುವೆನು.
14ಹಿರಿಕಿರಿಯರಾದ ಎಲ್ಲರನ್ನು ಒಬ್ಬರಿಗೊಬ್ಬರು ಬಡಿದಾಡುವಂತೆ ಮಾಡುವೆನು. ಅವರನ್ನು ಉಳಿಸೆನು,
ಕನಿಕರಿಸೆನು, ಕರುಣಿಸೆನು, ಹಾಗು ನಾಶಮಾಡದೆ ಬಿಡೆನು,' ಇದು ಸರ್ವೇಶ್ವರನಾದ ನನ್ನ ನುಡಿ."

**ಗಡಿಪಾರಿನ ಒಂದು ದೃಶ್ಯ**

15 ಜನರೇ, ಕಿವಿಗೊಡಿ, ಹೆಮ್ಮೆಪಡಬೇಡಿ,
ಸರ್ವೇಶ್ವರನೇ ನಿಮಗೆ ಕೊಡುವ ಆದೇಶ
ಇದು:
16 ನಿಮ್ಮ ದೇವರಾದ ಸರ್ವೇಶ್ವರನಿಗೆ ಸಲ್ಲಿಸಿ
ಗೌರವವನ್ನು
ಇಲ್ಲವಾದರೆ ಆತ ಬರಮಾಡುವನು
ಸ್ವಲ್ಪಕಾಲದಲ್ಲೆ ಕತ್ತಲನ್ನು.
ನಿಮ್ಮ ಕಾಲುಗಳು ಮುಗ್ಗರಿಸುವುವು
ಮಬ್ಬಿನ ಗುಡ್ಡಗಳ ನಡುವೆ.
17 ನೀವು ಕಿವಿಗೊಡದಿದ್ದರೆ
ನಿಮ್ಮ ಗರ್ವದ ನಿಮಿತ್ತ
ನನ್ನ ಮನ ಗೋಳಾಡುವುದು ಗುಟ್ಟಾಗಿ.
ನೀವು ಸೆರೆಯಾಗಿ ಹೋಗುವುದರಿಂದ
ಅಳುವೆನು ಸರ್ವೇಶ್ವರನ ಮುಂದೆ
ಬಹಳವಾಗಿ.
ನನ್ನ ಕಣ್ಣುಗಳಿಂದ ಕಂಬನಿ ಹರಿವುದು
ಧಾರಾಕಾರವಾಗಿ.

18 ಸರ್ವೇಶ್ವರ ನನಗೆ ಹೀಗೆಂದರು: "ರಾಜನಿಗೂ ರಾಜಮಾತೆಗೂ ಈ ವರ್ತಮಾನವನ್ನು ತಿಳಿಸು
– 'ನೀವು ಇಳಿದು ಬಂದು ನೆಲದಲ್ಲಿ ಕುಳಿತುಕೊಳ್ಳಿ. ನಿಮ್ಮ ಚೆಲುವಾದ ಕಿರೀಟ ಬಿದ್ದುಹೋಗಿದೆ ತಲೆಯಿಂದ.
19ದಕ್ಷಿಣ ನಾಡಿನ ನಗರಗಳು ಮುತ್ತಿಗೆಗೆ ತುತ್ತಾಗಿವೆ. ಅವುಗಳನ್ನು ಬಿಡಿಸಲು ಯಾರೂ ಇಲ್ಲ. ಜುದೇಯವೆಲ್ಲ
ಸೆರೆಹೋಗಿದೆ; ಸಂಪೂರ್ಣವಾಗಿ ಸೆರೆಯಾಗಿದೆ'."

20 "ಜೆರುಸಲೇಮ್, ಕಣ್ಣೆತ್ತಿ ನೋಡು, ಉತ್ತರದಿಂದ ಬರುವವರನ್ನು ನೋಡು. ನಿನಗೆ ಒಪ್ಪಿಸಿದ
ಹಿಂಡು, ಅಂದವಾದ ಆ ನಿನ್ನ ಹಿಂಡು ಎಲ್ಲಿ? 21ನಿನ್ನೊಡನೆ ಗೆಳೆಯರಂತೆ ಬಾಳಲು ನೀನೇ

ಪಳಗಿಸಿದವರನ್ನು ನಿನಗೆ ಒಡೆಯರನ್ನಾಗಿ ನಾನು ನೇಮಿಸುವಾಗ ಏನು ಹೇಳುವೆ? ಹೆರುವವಳಿಗೆ ಬರುವಂಥ
ವೇದನೆ ಆಗ ನಿನಗೆ ಬರದೆ ಇರುವುದೆ? 22ಇವು ನನಗೇಕೆ ಸಂಭವಿಸಿದವು ಎಂದು ಮನದೊಳಗೇ ನೀನು
ಅಂದುಕೊಳ್ಳುವೆ. ನೀನು ಮಾಡಿದುದು ಮಹಾಪಾಪ! ಆದ್ದರಿಂದ ನಿನ್ನ ಉಡುಗೆಯನ್ನೇ ಕೀಳಲಾಗುವುದು.
ನೀನು ಅತ್ಯಾಚಾರಕ್ಕೆ ಈಡಾಗುವೆ. 23ಎಥಿಯೋಪಿಯದವನು ತನ್ನ ಚರ್ಮದ ಬಣ್ಣವನ್ನು
ಮಾರ್ಪಡಿಸಬಲ್ಲನೆ? ಚಿರತೆಯು ತನ್ನ ಚುಕ್ಕೆಗಳನ್ನು ಬದಲಾಯಿಸೀತೆ? ಅಂತೆಯೇ ದುಷ್ಟತನದಲ್ಲಿ ಅಷ್ಟಾಗಿ
ನುರಿತ ನೀನು ಶಿಷ್ಟತನದಲ್ಲಿ ನಡೆಯಲಾರೆ. 24ಆದಕಾರಣ ಬಿರುಗಾಳಿ ಬಡಿದುಕೊಂಡು ಹೋಗುವ
ಒಣಹುಲ್ಲೋ ಎಂಬಂತೆ ಸರ್ವೇಶ್ವರನಾದ ನಾನು ನಿನ್ನನ್ನು ಚದರಿಸಿಬಿಡುವೆನು. 25ನೀನು ನನ್ನನ್ನು
ಮರೆತುಬಿಟ್ಟು ಸುಳ್ಳನ್ನು ನಂಬಿದ್ದರಿಂದ ಇದೇ ನಿನಗೆ ಒದಗಲಿರುವ ಗತಿ. ಇದೇ ನಾನು ನಿನಗೆ
ಅಳೆದುಕೊಡುವ ಪ್ರತೀಕಾರ. 26ನಿನ್ನ ಉಡುಗೆಯನ್ನು ನಿನ್ನ ಕಣ್ಮುಂದೆಯೇ ಕೀಳಿಸುವೆನು. ನೀನು
ಅತ್ಯಾಚಾರಕ್ಕೆ ಈಡಾಗುವೆ. 27ನಾನು ನಿನ್ನ ವ್ಯಭಿಚಾರಗಳನ್ನು, ನಿನ್ನ ಕಾಮುಕತನವನ್ನು, ಕೀಳಾದ ನಿನ್ನ
ಸೂಳೆಗಾರಿಕೆಯನ್ನು, ಗುಡ್ಡೆ, ಕಣಿವೆಗಳಲ್ಲಿ ನೀನು ನಡೆಸಿದ ಅಸಹ್ಯ ಕಾರ್ಯಗಳನ್ನು ನೋಡಿದ್ದೇನೆ.
ಜೆರುಸಲೇಮೇ, ನಿನ್ನ ಗತಿಯನ್ನು ಏನೆಂದು ಹೇಳಲಿ! ನೀನು ಶುದ್ಧಳಾಗಲು ಇನ್ನೆಷ್ಟು ಕಾಲಬೇಕು?"

## ಬರಗಾಲದ ಬೇನೆ

**14** ಬರಗಾಲದ ಬಗ್ಗೆ ಸರ್ವೇಶ್ವರ
ಯೆರೆಮೀಯನಿಗಿತ್ತ ಸಂದೇಶ:
2 'ಜುದೇಯ ನಾಡು ದುಃಖಿಸುತ್ತಿದೆ
ಅದರ ಪುರದ್ವಾರಗಳು ಬಹಳ ಕಪ್ಪಾಗಿವೆ.
ಜೆರುಸಲೇಮಿನವರ ಗೋಳಾಟ ಕೇಳಿಸುತ್ತಿದೆ.
3 ಅವರಲ್ಲಿನ ಶ್ರೀಮಂತರು
ತಮ್ಮ ಊಳಿಗದವರನ್ನು ನೀರಿಗೆ ಕಳಿಸುತ್ತಾರೆ.
ಅವರೋ ಕೊಳಗಳಲ್ಲಿ ನೀರು ಕಾಣದೆ
ಬರೀ ಬಿಂದಿಗೆಗಳೊಂದಿಗೆ ಹಿಂದಿರುಗುತ್ತಾರೆ.
ನಿರಾಶೆಗೊಂಡು, ನಾಚಿಕೆಪಟ್ಟು ಮೋರೆ
ಮುಚ್ಚಿಕೊಳ್ಳುತ್ತಾರೆ.
4 ನಾಡಿನಲ್ಲಿ ಮಳೆಯಿಲ್ಲದೆ ಭೂಮಿ
ಬಿರುಕುಬಿಟ್ಟಿದೆ
ನೇಗಿಲಯೋಗಿ ನಿರಾಶೆಗೊಂಡು ಮೋರೆ
ಮುಚ್ಚಿಕೊಳ್ಳುತ್ತಾನೆ.
5 ಕಾಡಿನಲ್ಲಿ ಹುಲ್ಲಿಲ್ಲದ ಕಾರಣ
ತಾಯಿಹುಲ್ಲೆ ಮರಿಹಾಕಿ ಮರೆಯಾಗುತ್ತದೆ.
6 ಕಾಡುಕತ್ತೆಗಳು ಬೋಳುಗುಡ್ಡಗಳಲ್ಲಿ
ನಿಂತು ನಿಟ್ಟುಸಿರು ಬಿಡುತ್ತವೆ
ನರಿಗಳಂತೆ ಗಾಳಿಕೋರುತ್ತವೆ,
ಸೊಪ್ಪುಸದೆಯಿಲ್ಲದೆ ಕಂಗೆಡುತ್ತವೆ"
7 ಸರ್ವೇಶ್ವರಾ, ನಮ್ಮ ದ್ರೋಹಗಳು ಹಲವು
ನಿಮಗೆ ವಿರುದ್ಧ ಪಾಪಮಾಡಿದೆವು.
ನಮ್ಮ ಅಪರಾಧಗಳೇ ನಮಗೆ ವಿರುದ್ಧ ಸಾಕ್ಷಿ
ನೀಡುತ್ತಿವೆ

ಆದರೂ ನಿಮ್ಮ ನಾಮದ ನಿಮಿತ್ತ ಕೈ ನೀಡು
ನಮಗೆ.
8 ಸರ್ವೇಶ್ವರಾ, ಇಸ್ರಯೇಲರಿಗೆ ನೀವೇ ನಿರೀಕ್ಷೆ
ಇಕ್ಕಟ್ಟಿನಲ್ಲಿ ಅವರಿಗೆ ನೀವೇ ರಕ್ಷೆ.
ನಾಡಿನಲ್ಲಿ ಅನ್ಯ ದೇಶೀಯನಂತಿರುವಿರಿ, ಏಕೆ?
ರಾತ್ರಿ ಕಳೆಯಲು ಗುಡಾರಹಾಕಿದ
ಪ್ರಯಾಣಿಕನಂತಿರುವಿರಿ, ಏಕೆ?
9 ದಿಕ್ಕು ತೋಚದವನಂತೆ ನಿಶ್ಚಲರಾಗಿರುವಿರಿ,
ಏಕೆ?
ರಕ್ಷಿಸಲಾಗದ ರಣಧೀರನಂತಿರುವಿರಿ, ಏಕೆ?
ಆದರೂ ಸರ್ವೇಶ್ವರಾ, ನೀವು ನಮ್ಮ ಮಧ್ಯೆ
ಇರುವಿರಿ;
ನಾವು ನಿಮ್ಮ ಹೆಸರಿನವರು, ನಮ್ಮನ್ನು
ಕೈಬಿಡಬೇಡಿ.

10 ಈ ಜನರನ್ನು ಕುರಿತು ಸರ್ವೇಶ್ವರ ನನಗೆ ಹೇಳಿದ ಮಾತುಗಳು: "ಇವರು ಅಲೆದಾಡಲು ಇಷ್ಟಪಡುವ ಜನರು. ತಮ್ಮ ಕಾಲಿನ ಮೇಲೆ ಹತೋಟಿಯಿಲ್ಲದವರು. ಆದಕಾರಣ ಸರ್ವೇಶ್ವರನಾದ ನಾನು ಇವರನ್ನು ಕರುಣೆಯಿಂದ ನೋಡುವುದಿಲ್ಲ. ಇದೀಗಲೆ ಇವರ ಅಪರಾಧಗಳನ್ನು ನೆನಪಿಗೆ ತಂದುಕೊಂಡು ಇವರ ಪಾಪಗಳಿಗೆ ದಂಡನೆಯನ್ನು ವಿಧಿಸುವೆನು."

11 ಸರ್ವೇಶ್ವರ ಮತ್ತೆ ನನಗೆ: "ಈ ಜನರ ಹಿತವನ್ನು ಬಯಸಿ ಇವರಿಗೋಸ್ಕರ ಪ್ರಾರ್ಥನೆ ಮಾಡಬೇಡ. 12ಇವರು ಉಪವಾಸ ಕೈಗೊಂಡರೂ ಇವರ ಮೊರೆಯನ್ನು ನಾನು ಕೇಳುವುದಿಲ್ಲ. ದಹನಬಲಿಗಳನ್ನೂ ಧಾನ್ಯನೈವೇದ್ಯಗಳನ್ನೂ ಅರ್ಪಿಸಿದರೂ ಸ್ವೀಕರಿಸುವುದಿಲ್ಲ. ಖಡ್ಗದಿಂದಲೂ ಕ್ಷಾಮದಿಂದಲೂ ವ್ಯಾಧಿಯಿಂದಲೂ ಇವರನ್ನು ಮುಗಿಸಿಬಿಡುತ್ತೇನೆ," ಎಂದು ಹೇಳಿದರು.

13 ಆಗ ನಾನು, "ಅಯ್ಯೋ, ಸ್ವಾಮಿ ಸರ್ವೇಶ್ವರಾ, ಈ ಜನರಿಗೆ, 'ಖಡ್ಗ ನಿಮ್ಮ ಕಣ್ಣಿಗೂ ಕಾಣಿಸದು, ಕ್ಷಾಮ ನಿಮಗೆಂದಿಗೂ ಬಂದೊದಗದು. ಸರ್ವೇಶ್ವರ ಈ ನಾಡಿನಲ್ಲೆ ನಿಮಗೆ ಚಿರಶಾಂತಿ ಸಮಾಧಾನವನ್ನು ಕೊಡುವರು' ಎಂದು ಪ್ರವಾದಿಗಳೇ ನುಡಿಯುತ್ತಿದ್ದಾರೆ," ಎಂದು ಹೇಳಿದೆನು.

14 ಅದಕ್ಕೆ ಸರ್ವೇಶ್ವರ ನನಗೆ: "ಪ್ರವಾದಿಗಳು ನನ್ನ ಹೆಸರೆತ್ತಿ ಸುಳ್ಳು ಪ್ರವಾದನೆ ಮಾಡುತ್ತಿದ್ದಾರೆ. ನಾನು ಅವರನ್ನು ಕಳಿಸಲಿಲ್ಲ, ಅವರಿಗೆ ಅಪ್ಪಣೆಕೊಟ್ಟಿಲ್ಲ. ಅವರೊಡನೆ ಮಾತಾಡಿದ್ದಿಲ್ಲ. ಅವರು ಕಳ್ಳದರ್ಶನಗಳನ್ನು, ಕಣಿಗಳನ್ನು, ಮಾಯಮಂತ್ರಗಳನ್ನು ಹಾಗು ತಾವೇ ಕಲ್ಪಿಸಿಕೊಂಡ ಕಪಟವನ್ನು ನಿಮಗೆ ಪ್ರಕಟಿಸುತ್ತಿದ್ದಾರೆ. 15ಆದುದರಿಂದ ನನ್ನ ಅಪ್ಪಣೆಯಿಲ್ಲದೆ, ನನ್ನ ಹೆಸರೆತ್ತಿ, ಪ್ರವಾದನೆ ಮಾಡುತ್ತಾ ಖಡ್ಗವಾಗಲಿ, ಕ್ಷಾಮವಾಗಲಿ ಈ ನಾಡಿಗೆ ಬರುವುದಿಲ್ಲ ಎಂದು ಬೋಧಿಸುತ್ತಿದ್ದಾರಲ್ಲವೆ? ಆ ಪ್ರವಾದಿಗಳ ವಿಷಯದಲ್ಲಿ ಸರ್ವೇಶ್ವರನಾದ ನಾನು ಹೇಳುವುದೇನೆಂದರೆ – ಖಡ್ಗದಿಂದಲೆ, ಕ್ಷಾಮದಿಂದಲೆ ಆ ಪ್ರವಾದಿಗಳು ನಾಶವಾಗುವರು. 16ಅವರ ಪ್ರವಾದನೆಗೆ ಕಿವಿಗೊಡುವ ಜನರು ಕೂಡ ಕ್ಷಾಮಖಡ್ಗಗಳಿಗೆ ತುತ್ತಾಗುವರು. ಜೆರುಸಲೇಮಿನ ಬೀದಿಗಳಲ್ಲಿ ಬಿಸಾಡಲ್ಪಡುವರು. ಅವರನ್ನೂ ಅವರ ಮಡದಿ ಮಕ್ಕಳನ್ನೂ ಹೂಣಲು ಸಹ ಯಾರೂ ಇರುವುದಿಲ್ಲ. ಅವರ ದುಷ್ಟತನವನ್ನು ಅವರ ಮೇಲೆಯೆ ಸುರಿದು ಬಿಡುವೆನು."
17 "ನೀನು ನಿನ್ನ ದುಃಖವನ್ನು ಅವರಿಗೆ ಹೀಗೆಂದು
ವ್ಯಕ್ತಪಡಿಸು –
'ರಾತ್ರಿಹಗಲು ನನ್ನ ಕಣ್ಣೀರು ಸುರಿಯಲಿ
ನಿರಂತರವಾಗಿ
ಏಕೆಂದರೆ ನನ್ನ ಜನವೆಂಬ ಯುವತಿ
ಗಾಯಗೊಂಡಿದ್ದಾಳೆ ತೀವ್ರವಾಗಿ,

ಹೌದು, ಅವಳಿಗೆ ಪೆಟ್ಟುಬಿದ್ದಿದೆ ಗಡುಸಾಗಿ.
18 ಊರುಬಿಟ್ಟು ಹೊರಗೆ ಹೋದರೆ ಅಲ್ಲಿ
ಕಾಣಿಸುತ್ತಾರೆ ಖಡ್ಗದಿಂದ ಸತ್ತವರು.
ಊರ ಒಳಗೆ ಬಂದರೆ ಅಲ್ಲಿ ಕಾಣಿಸುತ್ತಾರೆ
ಕ್ಷಾಮದಿಂದ ನರಳುವವರು.
ಅಪರಿಚಿತನಾಡಿಗೆ ಗಡೀಪಾರಾಗಿದ್ದಾರೆ
ಪ್ರವಾದಿಗಳು ಮತ್ತು ಯಾಜಕರು'."

**ಜನರು ಮಾಡಿದ ಪ್ರಾರ್ಥನೆ**

19 "ಸ್ವಾಮಿ, ನೀವು ಜುದೇಯವನ್ನು
ಸಂಪೂರ್ಣವಾಗಿ ತ್ಯಜಿಸಿಬಿಟ್ಟಿರೊ?
ಸಿಯೋನಿನ ಬಗ್ಗೆ ನಿಮಗೆ ಮನಃಪೂರ್ವಕವಾದ
ಅಸಹ್ಯ ಹುಟ್ಟಿದೆಯೊ?
ಗುಣವಾಗದಂಥ ಪೆಟ್ಟನ್ನು ನಮಗೆ
ಕೊಟ್ಟಿರುವಿರಿ ಏಕೆ?
ಸುಖವನ್ನು ನಿರೀಕ್ಷಿಸಿದೆವು, ಸಿಗಲಿಲ್ಲ ನಮಗೆ
ಯಾವ ಫಲ.
ಸುಕ್ಷೇಮವನ್ನು ಎದುರು ನೋಡಿದೆವು,
ಇಗೋ ಬಂದೊದಗಿದೆ ಸಂಕಟ.
20 ಹೇ ಸರ್ವೇಶ್ವರಾ, ಒಪ್ಪಿಕೊಂಡಿದ್ದೇವೆ ನಮ್ಮ
ದುಷ್ಟತನವನ್ನು
ನಮ್ಮ ಪೂರ್ವಜರು ಎಸಗಿದ ದುರಾಚಾರವನ್ನು
ನಾವು ಮಾಡಿದ ಪಾಪ ನಿಮಗೆ
ವಿರುದ್ಧವೆಂಬುದನ್ನು.
21 ನಿಮ್ಮ ನಾಮವನ್ನು ಮುಂದಿಟ್ಟು,
ನಮಗೆ ಅವಮಾನ ಮಾಡಬೇಡಿ
ನಿಮ್ಮ ಮಹಿಮೆಯ ಸಿಂಹಾಸನವನ್ನು ಅಸಡ್ಡೆ
ಮಾಡಬೇಡಿ
ನಮ್ಮೊಡನೆ ಮಾಡಿದ ಒಡಂಬಡಿಕೆಯನ್ನು
ನೆನೆಯಿರಿ.
ಅದನ್ನು ಭಂಗಪಡಿಸಬೇಡಿ.
22 ಅನ್ಯಜನಾಂಗಗಳ ಶೂನ್ಯದೇವತೆಗಳಲ್ಲಿ
ಮಳೆಸುರಿಸಬಲ್ಲವರುಂಟೆ?
ಆಕಾಶವು ತಾನಾಗಿ ಹದಮಳೆಯನ್ನು
ಬರಮಾಡಬಲ್ಲುದೆ?
ನಮ್ಮ ದೇವರಾದ ಸರ್ವೇಶ್ವರಾ, ವೃಷ್ಟಿದಾತರು
ನೀವೇ
ನಾವು ನಿರೀಕ್ಷಿಸುತ್ತಿರುವುದು ನಿಮ್ಮನ್ನೇ
ಹೌದು, ಇವುಗಳನ್ನೆಲ್ಲ ನಡೆಸುವವರು
ನೀವೇ.

## ಜುದೇಯದ ಜನರಿಗೆ ಕಠಿಣ ದಂಡನೆ

**15** ಸರ್ವೇಶ್ವರಸ್ವಾಮಿ ನನಗೆ ಹೀಗೆಂದರು: "ಮೋಶೆ ಮತ್ತು ಸಮುವೇಲನು ನನ್ನ ಮುಂದೆ ನಿಂತು
ವಿಜ್ಞಾಪಿಸಿದರೂ ನಾನು ಈ ಜನರ ಬಗ್ಗೆ ನನ್ನ ಮನಸ್ಸನ್ನು ಬದಲಾಯಿಸೆನು. ಇವರನ್ನು ನನ್ನ ಸಮ್ಮುಖದಿಂದ
ತಳ್ಳಿಬಿಡು; ತೊಲಗಿಹೋಗಲಿ!
2'ನಾವೆಲ್ಲಿಗೆ ಹೋಗಬೇಕು?' ಎಂದು ಕೇಳಿಯಾರು. ಆಗ ನೀನು ಅವರಿಗೆ:
'ಇದು ಸರ್ವೇಶ್ವರನ ಸಂದೇಶ:

ಮರಣವ್ಯಾಧಿಗೆ ಗೊತ್ತಾದವರು
  ಮರಣವ್ಯಾಧಿಗೆ
ಖಡ್ಗಕ್ಕೆ ಗೊತ್ತಾದವರು ಖಡ್ಗಕ್ಕೆ
ಕ್ಷಾಮಕ್ಕೆ ಗೊತ್ತಾದವರು ಕ್ಷಾಮಕ್ಕೆ
ಸೆರೆಗೆ ಗೊತ್ತಾದವರು ಸೆರೆಗೆ
  ಗುರಿಯಾಗಿ ಸಾಯುವರು' ಎಂದು ಹೇಳು.

3 "ನಾನು ಅವರಿಗೆ ನಾಲ್ಕು ವಿಧವಾದ ಬಾಧೆಗಳನ್ನು ವಿಧಿಸುವೆನು: ಕಡಿಯುವುದಕ್ಕೆ ಖಡ್ಗವನ್ನು,
ಸೀಳುವುದಕ್ಕೆ ನಾಯಿಯನ್ನು, ನುಂಗಿ ನಾಶಮಾಡುವುದಕ್ಕೆ ಪ್ರಾಣಿಪಕ್ಷಿಗಳನ್ನು ನೇಮಿಸುವೆನು.
4ಈ ಜನರನ್ನು
ಜಗದ ರಾಜ್ಯಗಳೆಲ್ಲವು ಭಯೋತ್ಪಾದಕರೆಂದು ಭಾವಿಸುವಂತೆ ಮಾಡುವೆನು. ಹಿಜ್ಕೀಯನ ಮಗನು ಹಾಗು
ಜುದೇಯದ ಅರಸನು ಆದ ಮನಸ್ಸೆಯು ಜೆರುಸಲೇಮಿನಲ್ಲಿ ನಡೆಸಿದ ದುಷ್ಕೃತ್ಯಕ್ಕೆ ಇದು
ಪ್ರತೀಕಾರವಾಗಿರುವುದು."

5 "ಜೆರುಸಲೇಮೆ, ನಿನಗೆ ಕರುಣೆ
  ತೋರುವವರಾರು?
ನಿನ್ನ ಪರಿಸ್ಥಿತಿಯನ್ನು ಕಂಡು
  ಪ್ರಲಾಪಿಸುವವರಾರು?
ತಿರುಗಿ ನೋಡಿ ನಿನ್ನ ಕ್ಷೇಮವನ್ನು
  ವಿಚಾರಿಸುವವರಾರು?
6 ಸರ್ವೇಶ್ವರನಾದ ನನ್ನ ಈ ಮಾತುಗಳನ್ನು
  ಕೇಳು:
ನೀನು ನನ್ನನ್ನು ಅಲ್ಲಗಳೆದು ನನಗೆ
  ವಿಮುಖಳಾಗಿರುವೆ.
ಆದಕಾರಣ ನಿನ್ನನ್ನು ನಾಶಮಾಡಲು
  ಕೈಯೆತ್ತಿರುವೆ
ನಿನ್ನನ್ನು ಕ್ಷಮಿಸಿ ಕ್ಷಮಿಸಿ ಸಾಕಾಗಿದೆ ನನಗೆ.
7 ನನ್ನ ಜನರನ್ನು ನಾಡಿನ ಉಕ್ಕಡಗಳಲ್ಲಿ
  ಮೊರದಿಂದ ಗಾಳಿಗೆ ತೂರಿಬಿಟ್ಟೆನು.
ಅವರನ್ನು ಪುತ್ರಶೋಕಕ್ಕೆ ಈಡು ಮಾಡಿ
  ನಾಶಪಡಿಸಿದೆನು.
ಏಕೆಂದರೆ, ಅವರು ತಮ್ಮ ದುರ್ಮಾರ್ಗದಿಂದ
  ಹಿಂದಿರುಗದೆ ಹೋದರು.
8 ಅವರ ವಿಧವೆಯರು ನನ್ನ ಭಾಗಕ್ಕೆ ಕಡಲ
  ಮರಳಿನಂತೆ
ಯುವಜನರಿಗೆ ಸಾವು ಬರಮಾಡಿದೆ ನಡು

ಜೀವನದಲ್ಲೆ.
ಅವರ ತಾಯಂದಿರನ್ನು ದುಃಖಕ್ಕೆ ಈಡು
ಮಾಡಿದೆ
ತಟ್ಟನೆ ಅವರನ್ನು ಕಳಕಳಕ್ಕೂ ದಿಗಿಲಿಗೂ
ಗುರಿಪಡಿಸಿದೆ.
9 ಏಳು ಮಕ್ಕಳನ್ನು ಕಳೆದುಕೊಂಡ ತಾಯಿ
ಪ್ರಾಣಬಿಟ್ಟಂತಿದ್ದಾಳೆ ದುಃಖದಿಂದ ಬಳಲಿ
ಅವಳ ಪಾಲಿಗೆ ಸೂರ್ಯ ಮುಳುಗಿದ್ದಾನೆ
ಹಾಡುಹಗಲಲ್ಲೆ.
ಆಶಾಭಂಗಪಟ್ಟಿದ್ದಾಳೆ, ಅವಮಾನಕ್ಕೆ
ಈಡಾಗಿದ್ದಾಳೆ.
ಖಡ್ಗಕ್ಕೆ ಗುರಿಮಾಡುವೆ ಅವಳ ಉಳಿದ
ಸಂತಾನವನ್ನು ಶತ್ರುಗಳ ಕಣ್ಣೆದುರಿಗೆ.
ಇದು ಸರ್ವೇಶ್ವರನಾದ ನನ್ನ ನುಡಿ."

### ಯೆರೆಮೀಯನ ಶೋಕ

10 "ನನ್ನ ಹೆತ್ತತಾಯೇ, ನನ್ನ ಗತಿಯನ್ನು ಏನು ಹೇಳಲಿ! ಜಗದ ಜನರಿಗೆಲ್ಲ ನಾನೊಬ್ಬ
ಜಗಳಗಂಟಿಗ, ವ್ಯಾಜ್ಯಗಾರ. ನಾನು ಹಣವನ್ನು ಸಾಲವಾಗಿ ಕೊಟ್ಟವನಲ್ಲ, ಕೊಂಡವನೂ ಅಲ್ಲ. ಆದರೂ
ನನ್ನನ್ನು ಎಲ್ಲರು ಶಪಿಸುವವರೇ. 11ಸರ್ವೇಶ್ವರಾ, ನಾನು ನಿಮಗೆ ಶ್ರೇಷ್ಠವಾದ ಸೇವೆ ಸಲ್ಲಿಸದೆ ಹೋಗಿದ್ದರೆ,
ನನ್ನ ಶತ್ರುಗಳು ಕಷ್ಟ ಸಂಕಟಗಳಲ್ಲಿ ಸಿಕ್ಕಿಬಿದ್ದ ಕಾಲದಲ್ಲಿ ಅವರ ಪರವಾಗಿ ನಿನಗೆ ಮೊರೆಯಿಡದೆ ಇದ್ದಿದ್ದರೆ
ನನಗೆ ಶಾಪ ತಗುಲಲಿ! 12ಕಬ್ಬಿಣವನ್ನು ಅದೂ ಉತ್ತರದಿಂದ ಬಂದ ಕಬ್ಬಿಣವನ್ನು ಹಾಗು ಕಂಚನ್ನು
ಬಗ್ಗಿಸಲು ಯಾರಿಂದಾದೀತು?"

13 ಸರ್ವೇಶ್ವರ: "ನಾಡಿನಾದ್ಯಂತ ನನ್ನ ಜನರು ಮಾಡಿದ ಎಲ್ಲ ಪಾಪಗಳ ನಿಮಿತ್ತ ಅವರ ಸೊತ್ತು
ಸಂಪತ್ತನ್ನು ಪುಕ್ಕಟೆಯಾಗಿ ಕೊಳ್ಳೆಗಾರರ ಪಾಲಾಗಿಸುವೆನು. 14ಅಪರಿಚಿತ ನಾಡಿಗೆ ಅವರನ್ನು ಸಾಗಿಸುವೆನು.
ಅಲ್ಲಿ ಶತ್ರುಗಳಿಗೇ ಊಳಿಗದವರನ್ನಾಗಿಸುವೆನು. ಏಕೆಂದರೆ ನನ್ನ ಕೋಪಾಗ್ನಿ ಉರಿಯುತ್ತಿದೆ. ಅದು ನಿಮ್ಮನ್ನು
ಸುಟ್ಟು ಹಾಕುವುದು."

15 ಅದಕ್ಕೆ ನಾನು: "ಸರ್ವೇಶ್ವರಾ, ನೀವು ಎಲ್ಲವನ್ನು ಬಲ್ಲವರು. ನನ್ನನ್ನು ನೆನಪಿಗೆ ತಂದುಕೊಂಡು
ನೆರವುನೀಡಿ. ನನಗಾಗಿ ನನ್ನ ಶತ್ರುಗಳಿಗೆ ಮುಯ್ಯಿತೀರಿಸಿರಿ. ಅವರಿಗೆ ಹೆಚ್ಚು ತಾಳ್ಮೆ ತೋರಿ ನನ್ನನ್ನು
ನಿರ್ಮೂಲ ಮಾಡಬೇಡಿ. ನಿಮ್ಮ ನಿಮಿತ್ತವೇ ನಾನು ನಿಂದೆಗೆ ಗುರಿಯಾದೆ ಎಂಬುದನ್ನು ಜ್ಞಾಪಕಕ್ಕೆ
ತಂದುಕೊಳ್ಳಿ. 16ನಿಮ್ಮ ವಚನಗಳು ನನಗೆ ದೊರೆತವು. ಅವುಗಳನ್ನು ಹಾಗೆಯೆ ನುಂಗಿ ಬಿಟ್ಟೆನು. ನಿಮ್ಮ
ನುಡಿಗಳು ನನಗೆ ಹರ್ಷವನ್ನೂ ಹೃದಯಾನಂದವನ್ನೂ ತಂದೆವು. ಸರ್ವಶಕ್ತರಾದ ದೇವರೇ, ಸರ್ವೇಶ್ವರಾ,
ನಾನು ನಿಮ್ಮ ನಾಮಧಾರಿಯಲ್ಲವೆ? 17ವಿನೋದಗಾರರ ಕೂಟದಲ್ಲಿ ಭಾಗವಹಿಸಿ ನಾನು ಉಲ್ಲಾಸ
ಪಟ್ಟವನಲ್ಲ. ನಿಮ್ಮ ಕೈ ನನ್ನ ಮೇಲೆ ಇದ್ದುದರಿಂದ ನಾನು ಒಬ್ಬಂಟಿಗನಾದೆ. ಕೋಪಾವೇಶದಿಂದ
ತುಂಬಿದವನಾದೆ. 18ನನಗೇಕೆ ನಿರಂತರವಾದ ವೇದನೆ? ಗುಣವಾಗದ ಗಡಸು ಗಾಯ? ನೀರು ಇರುವುದಾಗಿ
ತೋರಿಸಿಕೊಳ್ಳುವ ಕಳ್ಳ ತೊರೆಯಾಗಬೇಕೆ ನೀವು ನನಗೆ?"

19 ಅದಕ್ಕೆ ಸರ್ವೇಶ್ವರ: "ನೀನು ನನಗೆ ಅಭಿಮುಖನಾಗಿ ಹಿಂದಿರುಗಿ ಬಂದರೆ ಮರಳಿ ನಿನ್ನನ್ನು
ನನ್ನ ಸೇವೆಗೆ ಸೇರಿಸಿಕೊಳ್ಳುವೆನು. ತುಚ್ಛವಾದುದನ್ನು ತೊರೆದು ಅಮೂಲ್ಯವಾದುದನ್ನು ಉಚ್ಚರಿಸುವೆಯಾದರೆ
ನೀನು ನನ್ನ ಬಾಯಂತಿರುವೆ. ಜನರು ನಿನ್ನ ಕಡೆಗೆ ತಿರುಗಿಕೊಳ್ಳುವರು. ನೀನು ಅವರ ಕಡೆಗೆ ತಿರುಗದಿರುವೆ.
20ನಾನು ನಿನ್ನನ್ನು ಆ ಜನರಿಗೆ ದುರ್ಗಮವಾದ ಕಂಚಿನ ಪೌಳಿಗೋಡೆಯನ್ನಾಗಿಸುವೆನು. ನಿನಗೆ ವಿರುದ್ಧ
ಅವರು ಯುದ್ಧಮಾಡುವರು. ಆದರೆ ನಿನ್ನನ್ನು ಸೋಲಿಸಲಾಗದು. ನಿನ್ನನ್ನು ಉದ್ಧರಿಸಿ ರಕ್ಷಿಸಲು ನಾನೇ

ನಿನ್ನೊಂದಿಗಿರುವೆನು. ಇದು ಸರ್ವೇಶ್ವರನಾದ ನನ್ನ ಮಾತು. ನಿನ್ನನ್ನು ದುಷ್ಟರ ಕೈಯಿಂದ ಉದ್ಧರಿಸುವೆನು, ಕ್ರೂರಿಗಳ ಕೈಯಿಂದ ರಕ್ಷಿಸುವೆನು."

## ಯೆರೆಮೀಯನ ಜೀವನ ಒಂದು ಸಂಕೇತ

**16** ಸರ್ವೇಶ್ವರಸ್ವಾಮಿ ನನಗೆ ಈ ಸಂದೇಶವನ್ನು ದಯಪಾಲಿಸಿದರು: 2"ನೀನು ಮದುವೆಯಾಗಬೇಡ.
ಗಂಡು ಅಥವಾ ಹೆಣ್ಣು ಮಕ್ಕಳು ನಿನಗೆ ಈ ಸ್ಥಳದಲ್ಲಿ ಹುಟ್ಟದಿರಲಿ. 3ಏಕೆಂದರೆ ಇಲ್ಲಿ ಆ ಗಂಡುಹೆಣ್ಣು
ಮಕ್ಕಳಿಗೆ, ಅವರನ್ನು ಹೆತ್ತ ತಾಯಿಯರಿಗೆ ಅವರನ್ನು ಈ ನಾಡಿನಲ್ಲಿ ಪಡೆದ ತಂದೆಯರಿಗೆ ಸಂಭವಿಸಲು
ಇರುವುದನ್ನು ಸರ್ವೇಶ್ವರನಾದ ನಾನು ಹೇಳುತ್ತಾನೆ, ಕೇಳು: 4ಅವರು ಘೋರ ಮರಣಕ್ಕೆ ಗುರಿಯಾಗುವರು.
ಅವರಿಗಾಗಿ ಯಾರೂ ದುಃಖಿಸುವುದಿಲ್ಲ. ಅವರನ್ನು ಯಾರೂ ಹೂಣುವುದಿಲ್ಲ. ಅವರು ಗೊಬ್ಬರವಾಗಿ
ಭೂಮಿಯ ಮೇಲೆ ಬಿದ್ದಿರುವರು. ಖಡ್ಗದಿಂದ ಹಾಗು ಕ್ಷಾಮದಿಂದ ಅವರು ನಾಶವಾಗುವರು. ಅವರ
ಹೆಣಗಳು ಆಕಾಶದ ಪಕ್ಷಿಗಳಿಗೂ ಭೂಮಿಯ ಜಂತುಗಳಿಗೂ ಆಹಾರವಾಗುವುವು."

5 ಸರ್ವೇಶ್ವರ ಮತ್ತೆ ನನಗೆ ಹೀಗೆಂದರು: "ನೀನು ಸಾವು ಜರುಗಿದ ಮನೆಗಳಿಗೆ ಹೋಗಬೇಡ.
ಅಲ್ಲಿ ನಡೆಯುವ ಗೋಳಾಟದಲ್ಲಿ ಸೇರಬೇಡ. ಎದೆಬಡಿದುಕೊಂಡು ಸಂತಾಪ ಸೂಚಿಸಬೇಕಾಗಿಲ್ಲ.
ಏಕೆಂದರೆ, ನಾನು ದಯಪಾಲಿಸಿದ ಶಾಂತಿಯನ್ನೂ ಪ್ರೀತಿಯನ್ನೂ ಕೃಪೆಯನ್ನೂ ಆ ಜನರಿಂದ
ತೆಗೆದುಬಿಟ್ಟಿದ್ದೇನೆ. 6ಈ ನಾಡಿನಲ್ಲಿ ದೊಡ್ಡವರು ಹಾಗು ಚಿಕ್ಕವರು ಸಾಯುವರು. ಅವರನ್ನು ಯಾರು
ಹೂಣಿಸುವುದಿಲ್ಲ. ಅವರಿಗಾಗಿ ಯಾರೂ ಗೋಳಾಡುವುದಿಲ್ಲ. ದೇಹವನ್ನು ಹುಣ್ಣಾಗಿಸಿಕೊಳ್ಳುವುದಿಲ್ಲ.
ತಲೆಬೋಳಿಸಿಕೊಳ್ಳುವುದಿಲ್ಲ. 7ಸತ್ತವನಿಗಾಗಿ ದುಃಖಪಡುವವರನ್ನು ಸಂತೈಸುವುದಕ್ಕೋಸ್ಕರ ಯಾರೂ
ಕಜ್ಜಾಯವನ್ನು ಹಂಚುವುದಿಲ್ಲ. ತಂದೆಯನ್ನಾಗಲಿ, ತಾಯಿಯನ್ನಾಗಲಿ ಕಳೆದುಕೊಂಡವರಿಗು ಕೂಡ
ಯಾರೂ ಸಾಂತ್ವನದ ಪಾನಪಾತ್ರೆಯನ್ನು ನೀಡುವುದಿಲ್ಲ.

8 "ಔತಣದ ಮನೆಗೂ ಹೋಗಬೇಡ. ಅಲ್ಲಿಯವರೊಡನೆ ಕುಳಿತು ತಿಂದು, ಕುಡಿಯಬೇಡ,
9ಏಕೆಂದರೆ ಇಸ್ರಯೇಲಿನ ದೇವರೂ ಸರ್ವಶಕ್ತ ಸರ್ವೇಶ್ವರನೂ ಆದ ನಾನು ಹೇಳುತ್ತೇನೆ, ಕೇಳು: ನಿಮ್ಮ
ಕಾಲದಲ್ಲೆ, ನಿಮ್ಮ ಕಣ್ಣೆದುರಿಗೆ, ಸಂತೋಷ ಸಂಭ್ರಮದ ಧ್ವನಿಯನ್ನು ನಿಲ್ಲಿಸಿಬಿಡುವೆನು. ವಧೂವರರ ಸದ್ದೂ
ಇಲ್ಲವಾಗುವುದು.

10 "ಇದನ್ನೆಲ್ಲ ನೀನು ಆ ಜನರಿಗೆ ತಿಳಿಸುವಾಗ ಅವರು, 'ಈ ಮಹಾವಿಪತ್ತು ನಮಗೆ
ಸಂಭವಿಸಬೇಕೆಂದು ಸರ್ವೇಶ್ವರ ವಿಧಿಸಿದ್ದೇಕೆ? ನಾವು ಮಾಡಿದ ಅಪರಾಧವಾದರೂ ಏನು? ನಮ್ಮ
ದೇವರಾದ ಸರ್ವೇಶ್ವರನಿಗೆ ವಿರುದ್ಧ ನಾವು ಕಟ್ಟಿಕೊಂಡ ಪಾಪವೇನು?' ಎಂದು ಕೇಳುವರು. 11ಆಗ ನೀನು
ಅವರಿಗೆ ಹೀಗೆಂದು ಹೇಳಬೇಕು: 'ನಿಮ್ಮ ಪೂರ್ವಜರು ನನ್ನನ್ನು ತೊರೆದು ಬಿಟ್ಟರು. ಅನ್ಯ ದೇವತೆಗಳನ್ನು
ಹಿಂಬಾಲಿಸಿದರು. ಅವುಗಳಿಗೆ ಸೇವೆಸಲ್ಲಿಸಿ ಪೂಜಿಸಿದರು, ನನ್ನನ್ನು ಬಿಟ್ಟುದಲ್ಲದೆ ನನ್ನ ಧರ್ಮವಿಧಿಗಳನ್ನು
ಮೀರಿದರು. 12ನೀವಾದರೂ ನಿಮ್ಮ ಪೂರ್ವಜರಿಗಿಂತ ಹೆಚ್ಚು ಕೇಡನ್ನು ಮಾಡಿದ್ದೀರಿ. ನೀವೆಲ್ಲರು ನನ್ನ
ಮಾತನ್ನು ಕೇಳದೆ ದುಷ್ಟ ಹೃದಯವುಳ್ಳ ಹಟಮಾರಿಗಳಂತೆ ನಡೆಯುತ್ತಾ ಬಂದಿದ್ದೀರಿ. 13ಈ ಕಾರಣಗಳ
ನಿಮಿತ್ತ ನೀವಾಗಲಿ ನಿಮ್ಮ ಪೂರ್ವಜರಾಗಲಿ ನೋಡದ ನಾಡಿಗೆ ನಿಮ್ಮನ್ನು ಇಲ್ಲಿಂದ ಎಸೆದುಬಿಡುವೆನು.
ಅಲ್ಲಿ ಹಗಲಿರುಳೂ ಅನ್ಯ ದೇವತೆಗಳಿಗೆ ಸೇವೆಮಾಡುವಿರಿ, ನನ್ನ ದಯೆ ದಾಕ್ಷಿಣ್ಯ ಮಾತ್ರ ನಿಮಗೆ
ದೊರಕದು".

## ಸೆರೆಯಿಂದ ಹಿಂದಿರುಗುವ ಆಶ್ವಾಸನೆ

14 ಸರ್ವೇಶ್ವರ ಹೀಗೆನ್ನುತ್ತಾರೆ: "ಇಗೋ ಕೇಳು, ಕಾಲಬರಲಿದೆ. ಆಗ ಜನರು, 'ಇಸ್ರಯೇಲರನ್ನು
ಈಜಿಪ್ಟ್ ದೇಶದಿಂದ ಬಿಡಿಸಿ ಬರಮಾಡಿದ ಸರ್ವೇಶ್ವರನ ಜೀವದಾಣೆ' ಎಂದು ಪ್ರಮಾಣ ಮಾಡುವುದನ್ನು
ಬಿಟ್ಟುಬಿಡುವರು. 15ಬದಲಿಗೆ, 'ಇಸ್ರಯೇಲರನ್ನು ಉತ್ತರ ದೇಶದಿಂದ ಹಾಗು ಅವರನ್ನು ತಾನು ತಳ್ಳಿಬಿಟ್ಟಿದ್ದ

ಎಲ್ಲ ಸೀಮೆಗಳಿಂದ ಬಿಡಿಸಿ ಬರಮಾಡಿದ ಸರ್ವೇಶ್ವರನ ಜೀವದಾಣೆ,' ಎಂದು ಪ್ರಮಾಣ ಮಾಡುವರು. ನಾನು ಅವರ ಪೂರ್ವಜರಿಗೆ ದಯಪಾಲಿಸಿದ ನಾಡಿಗೆ ಅವರನ್ನು ಮರಳಿ ಬರಮಾಡುವೆನು.

### ಬರಲಿರುವ ದಂಡನೆ

16 ಸರ್ವೇಶ್ವರ ಹೀಗೆನ್ನುತ್ತಾರೆ: "ಇಗೋ, ನಾನು ಬಹುಮಂದಿ ಬೆಸ್ತರನ್ನು ಕಳಿಸುವೆನು, ಅವರು ನನ್ನ ಜನರನ್ನು ಹಿಡಿಯುವರು, ಬಳಿಕ ಬಹುಜನ ಬೇಡರನ್ನು ಕಳಿಸುವೆನು. ಅವರು ಎಲ್ಲ ಬೆಟ್ಟಗುಡ್ಡಗಳಿಂದಲೂ ಬಂಡೆಗಳ ಸಂದುಗೊಂದುಗಳಿಂದಲೂ ನನ್ನ ಜನರನ್ನು ಹೊರಡಿಸಿ ಬೇಟೆಯಾಡುವರು.
17ಈ ಜನರ ನಡತೆ ನನ್ನ ಮುಖಕ್ಕೆ ಮರೆಯಾಗಿಲ್ಲ, ಎಲ್ಲವು ನನ್ನ ಕಣ್ಣಿಗೆ ಕಟ್ಟಿದಂತಿದೆ. ಅವರ ಅಕ್ರಮ ನನಗೆ ಗುಟ್ಟೇನೂ ಅಲ್ಲ, ಎಲ್ಲವು ಬಟ್ಟಬಯಲಾಗಿದೆ.
18ಮೊತ್ತ ಮೊದಲು ಅವರ ಅಕ್ರಮಕ್ಕೂ ಪಾಪಕ್ಕೂ ಇಮ್ಮಡಿ ಶಿಕ್ಷೆಯನ್ನು ಕೊಡುವೆನು. ಏಕೆಂದರೆ ಹೆಣಗಳಂತಿರುವ ತಮ್ಮ ಹೇಯ ವಿಗ್ರಹಗಳಿಂದ ನನ್ನ ನಾಡನ್ನು ಹೊಲಸು ಮಾಡಿದ್ದಾರೆ. ಅಸಹ್ಯವಾದ ವಸ್ತುಗಳಿಂದ ಆ ನನ್ನ ಸ್ವಂತ ನಾಡನ್ನು ತುಂಬಿಸಿ ಬಿಟ್ಟಿದ್ದಾರೆ."

### ಯೆರೆಮೀಯನ ಭರವಸೆ

19 "ಹೇ ಸರ್ವೇಶ್ವರಾ, ನನ್ನ ಶಕ್ತಿಯೇ, ನನ್ನ ಕೋಟೆಯೇ, ಆಪತ್ತು ಕಾಲದಲ್ಲಿ ನನ್ನ ಆಶ್ರಯವೇ, ಜಗದ ಕಟ್ಟಕಡೆಯಿಂದ ಜನಾಂಗಗಳು ನಿಮ್ಮ ಸಮ್ಮುಖಕ್ಕೆ ಬರುವುವು. 'ನಮ್ಮ ಪೂರ್ವಜರು ಪಾರಂಪರ್ಯವಾಗಿ ಪಡೆದವುಗಳು ನಿಶ್ಚಯವಾಗಿ ಅಬದ್ಧವಾದವುಗಳು, ಮಾಯರೂಪವಾದವುಗಳು ಹಾಗು ನಿಷ್ಪ್ರಯೋಜನವಾದವುಗಳು.
20ಮನುಷ್ಯ ಮಾತ್ರದವನು ದೇವರುಗಳನ್ನು ಕಲ್ಪಿಸಿಕೊಳ್ಳಬಲ್ಲನೆ? ಕಲ್ಪಿಸಿಕೊಂಡರೆ ಅವು ದೇವರುಗಳೇ ಅಲ್ಲ,' ಎಂದು ನಿವೇದಿಸುವುವು."

21 ಸರ್ವೇಶ್ವರ: "ಆದುದರಿಂದ ಇಗೋ, ಇಂದೊಮ್ಮೆ ನನ್ನ ಭುಜಬಲವನ್ನೂ ಪರಾಕ್ರಮವನ್ನೂ ಅವರಿಗೆ ತಿಳಿಯಪಡಿಸುವೆನು. ಚೆನ್ನಾಗಿ ಗ್ರಹಿಸುವಂತೆ ಮಾಡುವೆನು. ನನ್ನ ನಾಮಧೇಯ ಸರ್ವೇಶ್ವರ ಎಂದೇ ಅವರು ಗುರುತು ಹಚ್ಚುವರು."

### ಜುದೇಯದ ಪಾಪ ಮತ್ತು ಪ್ರಾಯಶ್ಚಿತ್ತ

**17** ಸರ್ವೇಶ್ವರಸ್ವಾಮಿ ಜುದೇಯದ ಜನರಿಗೆ ಹೀಗೆನ್ನುತ್ತಾರೆ: "ಜುದೇಯದ ಪಾಪವನ್ನು ಕಬ್ಬಿಣದ ಲೇಖನಿಯಿಂದ, ವಜ್ರದ ಮೊನೆಯಿಂದ ಬರೆಯಲಾಗಿದೆ. ಅದನ್ನು ನಿಮ್ಮ ಜನರ ಹೃದಯದ ಹಲಗೆಯ ಮೇಲೂ ಅವರ ಬಲಿಪೀಠಗಳ ಕೊಂಬುಗಳ ಮೇಲೂ ಕೆತ್ತಲಾಗಿದೆ.
2ನಿಮ್ಮ ಮಕ್ಕಳು ಸೊಂಪಾಗಿ ಬೆಳೆದ ಮರಗಳನ್ನಾಗಲಿ ಎತ್ತರವಾದ ಗುಡ್ಡಗಳನ್ನಾಗಲಿ, ಬೈಲಿನ ಬೆಟ್ಟಗಳನ್ನಾಗಲಿ ಕಂಡಾಗಲೆಲ್ಲ ಅವರ ಬಲಿಪೀಠಗಳನ್ನು ಹಾಗು ಅಶೇರ ವಿಗ್ರಹಸ್ತಂಭಗಳನ್ನು ಜ್ಞಾಪಿಸಿಕೊಳ್ಳುತ್ತಾರೆ.
3ನಿಮ್ಮ ಪ್ರಾಂತ್ಯಗಳಲ್ಲೆಲ್ಲ ನೀವು ಮಾಡಿದ ಪಾಪದ ನಿಮಿತ್ತ ನಾನು ನಿಮ್ಮ ಎಲ್ಲ ಸೊತ್ತು ಸಂಪತ್ತುಗಳನ್ನು ಮತ್ತು ಪೂಜಾಸ್ಥಳಗಳನ್ನು ಸೂರೆಗೆ ಈಡುಮಾಡುವೆನು.
4ನಾನು ನಿಮಗೆ ಹಕ್ಕು ಬಾಧ್ಯತೆಯಾಗಿ ದಯಪಾಲಿಸಿದ ಸೊತ್ತನ್ನು ನಿಮ್ಮ ದೋಷದಿಂದಲೆ ಕಳೆದುಕೊಳ್ಳುವಿರಿ. ನೀವು ನೋಡದ ನಾಡಿನಲ್ಲಿ ನಿಮ್ಮನ್ನು ನಿಮ್ಮ ಶತ್ರುಗಳಿಗೇ ಊಳಿಗದವರನ್ನಾಗಿ ಮಾಡುವೆನು. ನೀವು ನನ್ನ ಕೋಪಾಗ್ನಿಯನ್ನು ಹೊತ್ತಿಸಿದ್ದೀರಿ. ಅದು ನಿರಂತರವಾಗಿ ಉರಿಯುತ್ತಿರುವುದು."

### ಮುತ್ತಿನಂಥ ಕೆಲವು ಮಾತುಗಳು

5 ಇವು ಸರ್ವೇಶ್ವರನ ಮಾತುಗಳು:
"ಮಾನವ ಮಾತ್ರದವರಲ್ಲಿ ಭರವಸೆಯಿಟ್ಟು
ನರಜನ್ಮದವರನ್ನೇ ತನ್ನ ಭುಜಬಲ

ವೆಂದುಕೊಂಡು
ಸರ್ವೇಶ್ವರನನ್ನೇ ತೊರೆಯುವಂಥ
ಹೃದಯವುಳ್ಳವನು
ಶಾಪಗ್ರಸ್ತನು!
6 ಇಂಥವನು ಅಡವಿಯಲ್ಲಿನ ಜಾಲಿಗಿಡಕ್ಕೆ
ಸಮಾನನು.
ಶುಭಸಂಭವಿಸಿದರೂ ಅದು ಅವನ ಕಣ್ಣಿಗೆ
ಕಾಣದು.
ಜನರಾರೂ ವಾಸಿಸದ ಚೌಳು ನೆಲದೊಳು
ಬೆಳೆಯಿಲ್ಲದ ಬೆಂಗಾಡಿನೊಳು
ವಾಸಿಸುವವನ ಪರಿಸ್ಥಿತಿ ಅವನದು.
7 ಸರ್ವೇಶ್ವರನಲ್ಲಿ ಭರವಸೆಯಿಟ್ಟವನಾದರೋ
ಧನ್ಯ!
ಅಂಥವನಿಗೆ ಸರ್ವೇಶ್ವರನಲ್ಲೇ ವಿಶ್ವಾಸ.
8 ನೀರರುಗಿನಲೆ ನೆಡಲಾದ, ನದಿಯ ಬದಿಯಲೆ
ಬೇರು ಹರಡಿದ
ಬಿಸಿಲ ಧಗೆಗೆ ಹೆದರದ, ಬರಗಾಲದಲ್ಲೂ
ನಿಶ್ಚಿಂತವಾದ
ಹಸಿರೆಲೆಬಿಡುವ, ಫಲನೀಡುವ ಮರಕ್ಕೆ
ಸಮಾನನು ಆತ.
9 ಮಾನವ ಹೃದಯ ಎಲ್ಲಕ್ಕಿಂತ ವಂಚಕ
ಅದಕ್ಕೆ ಅಂಟಿದೆ ಗುಣವಾಗದ ರೋಗ
ಅದರ ಗುಟ್ಟನ್ನು ಅರಿತುಕೊಳ್ಳಬಲ್ಲವರೂ
ಇಲ್ಲ.
10 ಸರ್ವೇಶ್ವರನಾದ ನಾನು ಹೃದಯ ಪರಿಶೀಲಕ
ಹೌದು, ಅಂತರಿಂದ್ರಿಯಗಳನ್ನು
ಪರಿಶೋಧಿಸುವಾತ.
11 ಅನ್ಯಾಯವಾಗಿ ಆಸ್ತಿಪಾಸ್ತಿಗಳನ್ನು
ಗಳಿಸಿಕೊಳ್ಳುವ ಮಾನವ
ತನ್ನದಲ್ಲದ ಮರಿಗಳನ್ನು ಕೂಡಿಸಿಕೊಳ್ಳುವ
ಕೌಜುಗ ಹಕ್ಕಿಗೆ ಸಮಾನ.
ಅವು ಅವನಿಂದ ತೊಲಗಿ ಹೋಗುವುವು
ನಡುಪ್ರಾಯದಲ್ಲಿ
ಅವನು ಮೂರ್ಖನಾಗಿ ಕಂಡುಬರುವನು
ಅಂತ್ಯಕಾಲದಲ್ಲಿ.”
12 ಆದಿಯಿಂದಲೂ ಉನ್ನತಸ್ಥಾನದಲ್ಲಿದೆ ನಮ್ಮ
ಪವಿತ್ರಾಲಯ
ಅದು ಮಹಿಮೆಯ ಸಿಂಹಾಸನ.
13 ಸ್ವಾಮಿ ಸರ್ವೇಶ್ವರಾ, ನೀವು ಇಸ್ರಯೇಲರ
ಆಶ್ರಯ!

ನಿಮ್ಮನ್ನು ಬಿಟ್ಟುಹೋಗುವವರು
ಆಶಾಭಂಗಪಡುವರು
ಅವರು ಜೀವಜಲದ ಬುಗ್ಗೆಯನ್ನೆ ತೊರೆ
ದವರು
ತಮ್ಮ ಹೆಸರನ್ನು ಧೂಳಿನಲ್ಲಿ ಬರೆಸಿ
ಕೊಂಡವರು.

## ಯೆರೆಮೀಯನ ವಿಜ್ಞಾಪನೆ

14 ಹೇ ಸರ್ವೇಶ್ವರಾ, ನನ್ನನ್ನು ಸ್ವಸ್ಥಪಡಿಸಿರಿ, ನಾನು ಸ್ವಸ್ಥನಾಗುವೆನು. ನನ್ನನ್ನು ರಕ್ಷಿಸಿರಿ, ನಾನು ರಕ್ಷಿತನಾಗಿಯೆ ತೀರುವೆನು. ನೀವೇ ನನಗೆ ಸ್ತುತ್ಯಾರ್ಹರು!

15 ಅಕಟಾ, ಜನರು ನನ್ನನ್ನು 'ಸರ್ವೇಶ್ವರನ ಮಾತೆಲ್ಲಿ? ಅದು ಈಗಲೇ ನೆರವೇರಲಿ' ಎಂದು ಮೂದಲಿಸುತ್ತಾರೆ.

16 ನಾನಾದರೋ 'ಕೇಡನ್ನು ಬರಮಾಡಿ' ಎಂದು ನಿಮ್ಮನ್ನು ತವಕಪಡಿಸಲಿಲ್ಲ. ಅನಿವಾರ್ಯ ವಿಪತ್ತಿನ ದಿನವನ್ನು ನಾನು ಅಪೇಕ್ಷಿಸಲಿಲ್ಲ. ಇದು ನಿಮಗೆ ತಿಳಿದ ವಿಷಯ. ನನ್ನ ಮಾತುಗಳು ನಿಮ್ಮ ಸಮಕ್ಷಮದಲ್ಲೇ ನನ್ನ ಬಾಯಿಂದ ಹೊರಟವು. 17ನನಗೆ ಭಯಕ್ಕೆ ಕಾರಣವಾಗಬೇಡಿ, ಕೇಡಿನ ಕಾಲದಲ್ಲಿ ನನಗೆ ಆಶ್ರಯ ನೀಡಿ. 18ನನಗಲ್ಲ, ನನ್ನ ಹಿಂಸಕರಿಗೆ ಅವಮಾನವಾಗಲಿ. ಭಯಭ್ರಾಂತಿ ನನ್ನನ್ನಲ್ಲ, ಅವರನ್ನು ಅಪಹರಿಸಲಿ. ಅವರಿಗೆ ಕೇಡುಗಾಲವನ್ನು ಬರಮಾಡಿ, ಬೇರುಸಹಿತ ಅವರನ್ನು ನಾಶಪಡಿಸಿರಿ!

## ಸಬ್ಬತ್ ದಿನಾಚರಣೆ

19 ಸರ್ವೇಶ್ವರ ನನಗೆ ಕೊಟ್ಟ ಆದೇಶ: "ನೀನು ಹೊರಟು ಜುದೇಯದ ಅರಸರು ಹೋಗಿಬರುವ ಜನತಾದ್ವಾರದಲ್ಲೂ ಜೆರುಸಲೇಮಿನ ಇತರ ಬಾಗಿಲುಗಳಲ್ಲೂ ನಿಂತುಕೊಂಡು ಹೀಗೆಂದು ಸಾರು: 20'ಈ ಬಾಗಿಲುಗಳಲ್ಲಿ ಸೇರುವ ಜುದೇಯದ ಅರಸರೇ, ಎಲ್ಲ ಯೆಹೂದ್ಯರೇ, ಜೆರುಸಲೇಮಿನ ಸಕಲ ನಿವಾಸಿಗಳೇ, ಸರ್ವೇಶ್ವರಸ್ವಾಮಿಯ ಈ ಸಂದೇಶವನ್ನು ಕೇಳಿರಿ. 21ಮನಮುಟ್ಟಿ ಇದನ್ನು ಗಮನಿಸಿರಿ: ಸಬ್ಬತ್ ದಿನದಲ್ಲಿ ಯಾವ ಹೊರೆಯನ್ನೂ ಹೊರಬೇಡಿ. ಜೆರುಸಲೇಮಿನ ಬಾಗಿಲುಗಳಲ್ಲಿ ಅದನ್ನು ತರಲೇಬೇಡಿ. 22ಆ ಸಬ್ಬತ್ ದಿನದಲ್ಲಿ ನಿಮ್ಮ ಮನೆಗಳಿಂದ ಯಾವ ಹೊರೆಯನ್ನೂ ಈಚೆಗೆ ತೆಗೆದುಕೊಂಡು ಬರಬೇಡಿ. ಯಾವ ಕೆಲಸವನ್ನು ಮಾಡದಿರಿ. ನಾನು ನಿಮ್ಮ ಪೂರ್ವಜರಿಗೆ ಆಜ್ಞೆಮಾಡಿದಂತೆ ಸಬ್ಬತ್ ದಿನವನ್ನು ಪವಿತ್ರ ದಿನವನ್ನಾಗಿ ಆಚರಿಸಿರಿ. 23ಅವರಾದರೋ ನನಗೆ ಕಿವಿಗೊಡಲಿಲ್ಲ. ಕೇಳಲಿಕ್ಕೂ ಕಲಿತುಕೊಳ್ಳಲಿಕ್ಕೂ ಅವರು ಒಪ್ಪಲಿಲ್ಲ.

24 "ಸರ್ವೇಶ್ವರನಾದ ನಾನು ಹೇಳುವ ಮಾತಿದು: ನೀವು ನನ್ನ ಕಡೆಗೆ ಚೆನ್ನಾಗಿ ಕಿವಿಗೊಟ್ಟು ಸಬ್ಬತ್ ದಿನದಲ್ಲಿ ಈ ಊರಿನ ಬಾಗಿಲುಗಳೊಳಗೆ ಯಾವ ಹೊರೆಯನ್ನು ತರದೆ, ಯಾವ ಕೆಲಸವನ್ನೂ ಮಾಡದೆ, ಆ ದಿನವನ್ನು ಪವಿತ್ರವಾಗಿ ಆಚರಿಸಿದರೆ, 25ಆಗ ದಾವೀದನ ಸಿಂಹಾಸನಾರೂಢರಾದ ಅರಸರೂ ಹಾಗು ಪ್ರಭುಗಳೂ ರಥಾಶ್ವಗಳನ್ನು ಏರಿದವರಾಗಿ ಈ ನಗರದ ಬಾಗಿಲುಗಳನ್ನು ಪ್ರವೇಶಿಸುವರು. ಇವರು ಮಾತ್ರವಲ್ಲ, ಇವರ ಪ್ರಧಾನರು, ಜುದೇಯದ ಜನರು, ಜೆರುಸಲೇಮಿನ ನಿವಾಸಿಗಳು ಎಲ್ಲರೂ ಇಲ್ಲಿ ಸೇರುವರು. ಈ ನಗರದಲ್ಲಿ ಜನರು ಯಾವಾಗಲು ತುಂಬಿರುವರು. 26ಜುದೇಯದ ನಗರಗಳು, ಜೆರುಸಲೇಮಿನ ಸುತ್ತ ಮುತ್ತಲಿನ ಪ್ರದೇಶಗಳು, ಬೆನ್ಯಾಮಿನ್ ಪ್ರಾಂತ್ಯ, ಇಳಕಲಿನ ಪ್ರದೇಶ, ಬೆಟ್ಟದ ಮೇಲಣ ಪ್ರದೇಶ, ದಕ್ಷಿಣ ಪ್ರಾಂತ್ಯ, ಈ ಎಲ್ಲ ಸ್ಥಳಗಳಿಂದ ಸರ್ವಾಂಗ ಹೋಮಪಶು, ಯಜ್ಞಪಶು, ಧಾನ್ಯನೈವೇದ್ಯ, ಧೂಪ ಮತ್ತು ಕೃತಜ್ಞತಾರ್ಪಣೆ ಇವುಗಳನ್ನು ಜನರು ನನ್ನ ಆಲಯಕ್ಕೆ ತೆಗೆದುಕೊಂಡು ಬರುವರು. 27ಆದರೆ ನನ್ನ ಕಡೆಗೆ ಕಿವಿಗೊಡದೆ, ಸಬ್ಬತ್ ದಿನದಲ್ಲಿ ಹೊರೆಹೊತ್ತು, ಜೆರುಸಲೇಮಿನ ಬಾಗಿಲುಗಳೊಳಗೆ ಪ್ರವೇಶಿಸಬಾರದೆಂಬ ನಿಯಮವನ್ನು ಕೈಗೊಳ್ಳದೆ, ಆ ಸಬ್ಬತ್ ದಿನವನ್ನು ಪವಿತ್ರ ದಿನ ಎಂದು ಆಚರಿಸದೆ

ಹೋದರೆ, ಆಗ ನಾನು ಊರಬಾಗಿಲುಗಳಲ್ಲಿ ಬೆಂಕಿಯನ್ನು ಹೊತ್ತಿಸುವೆನು. ಅದು ಜೆರುಸಲೇಮಿನ ಅರಮನೆಗಳನ್ನು ದಹಿಸಿಬಿಡುವುದು, ಆ ಬೆಂಕಿ ಆರುವುದೇ ಇಲ್ಲ."

### ಕುಂಬಾರನ ಸಾಮತಿ

**18** ಸರ್ವೇಶ್ವರಸ್ವಾಮಿ ನನಗೆ: 2"ನೀನೆದ್ದು ಕುಂಬಾರನ ಮನೆಗೆ ಇಳಿದುಹೋಗು, ಅಲ್ಲೇ ನನ್ನ ನುಡಿಯನ್ನು
ನಿನಗೆ ಕೇಳಮಾಡುತ್ತೇನೆ," ಎಂದು ತಿಳಿಸಿದರು. 3ಅಂತೆಯೇ ನಾನು ಕುಂಬಾರನ ಮನೆಗೆ ಹೋದೆ. ಅಲ್ಲಿ
ಆ ಕುಂಬಾರನು ತಿರುಗುತ್ತಿದ್ದ ಚಕ್ರದ ಮೇಲೆ ಕೆಲಸ ಮಾಡುತ್ತಿದ್ದ. 4ಅವನು ಜೇಡಿಮಣ್ಣಿನಿಂದ ಮಾಡುತ್ತಿದ್ದ
ಒಂದು ಪಾತ್ರೆ ಕೆಟ್ಟು ಹೋಗುತ್ತಿದ್ದಾಗಲೆಲ್ಲ ಅದನ್ನು ಮತ್ತೆ ತನಗೆ ಸರಿತೋಚಿದ ಹಾಗೆ ಹೊಸ ಪಾತ್ರೆಯನ್ನಾಗಿ
ಮಾಡುತ್ತಿದ್ದ.

5 ಆಗ ಸರ್ವೇಶ್ವರ ನನಗೆ ಅನುಗ್ರಹಿಸಿದ ಸಂದೇಶ: 6"ಇಸ್ರಯೇಲಿನ ವಂಶಜರೇ, ಈ ಕುಂಬಾರನು
ಮಾಡಿದಂತೆ ನಾನು ನಿಮ್ಮನ್ನು ಮಾಡಕೂಡದೇ? ಇಸ್ರಯೇಲಿನ ಮನೆತನದವರೇ, ಜೇಡಿಮಣ್ಣು ಕುಂಬಾರನ
ಕೈಯಲ್ಲಿ ಹೇಗೋ ಹಾಗೆಯೇ ನೀವು ನನ್ನ ಕೈಯಲ್ಲಿ ಇದ್ದೀರಿ. 7ಒಂದು ಜನಾಂಗವನ್ನು ಅಥವಾ ಒಂದು
ರಾಜ್ಯವನ್ನು ಕಿತ್ತು, ಕೆಡವಿ, ನಾಶಪಡಿಸಿ ಎಂದು ನಾನು ಎಂದಾದರೂ ಅಪ್ಪಣೆ ಕೊಡಲು ಸಾಧ್ಯ. 8ದಂಡನೆಗೆ
ನಿರ್ಣಯಿಸಲಾದ ಆ ಜನಾಂಗದವರು ತಮ್ಮ ಕೆಟ್ಟತನವನ್ನು ಬಿಟ್ಟು ಹಿಂತಿರುಗಿದ್ದೇ ಆದರೆ ನಾನು
ಬರಮಾಡಬೇಕೆಂದಿದ್ದ ಆ ವಿಪತ್ತನ್ನು ನಾನು ಮನಮರುಗಿ ಬರಮಾಡದಿರುವೆನು. 9ಹಾಗೆಯೇ ಒಂದು
ಜನಾಂಗವನ್ನು ಅಥವಾ ಒಂದು ರಾಜ್ಯವನ್ನು ನೆಟ್ಟು ಕಟ್ಟಬೇಕೆಂದು ನಾನು ಎಂದಾದರೂ ಅಪ್ಪಣೆಕೊಡಲು
ಸಾಧ್ಯ. 10ಅದು ನನ್ನ ಮಾತನ್ನು ಕೇಳದೆ ನನ್ನ ದೃಷ್ಟಿಯಲ್ಲಿ ಕೆಟ್ಟತನವನ್ನು ಮಾಡಿದ್ದೇ ಆದರೆ ನಾನು
ಮನಸ್ಸನ್ನು ಬದಲಾಯಿಸುವೆನು. ಅದಕ್ಕೆ ಮಾಡಬೇಕೆಂದಿದ್ದ ಒಳಿತನ್ನು ಮಾಡದಿರುವೆನು. 11ಈಗ ನೀನು
ಜುದೇಯದ ಹಾಗು ಜೆರುಸಲೇಮಿನ ಜನರಿಗೆ ಈ ಸಂದೇಶವನ್ನು ತಿಳಿಸು – 'ಸರ್ವೇಶ್ವರ ಹೀಗೆನ್ನುತ್ತಾರೆ:
ನಾನು ನಿಮಗೆ ವಿರುದ್ಧ ವಿಪತ್ತನ್ನು ಕಲ್ಪಿಸುತ್ತಿದ್ದೇನೆ. ನಿಮ್ಮಲ್ಲಿ ಪ್ರತಿಯೊಬ್ಬನು ತನ್ನ ತನ್ನ ದುರ್ಮಾರ್ಗವನ್ನು
ಬಿಟ್ಟು ಹಿಂದಿರುಗಲಿ, ನಡತೆಯನ್ನೂ ಕೃತ್ಯಗಳನ್ನೂ ಸರಿಪಡಿಸಿಕೊಳ್ಳಲಿ.'

12 "ಆದರೆ ಅವರು, 'ಇದೆಲ್ಲ ಹೇಳಿ ಏನು ಪ್ರಯೋಜನವಿಲ್ಲ; ನಾವು ನಮ್ಮ ಆಲೋಚನೆ ಪ್ರಕಾರ
ನಡೆಯುತ್ತೇವೆ. ನಮ್ಮಲ್ಲಿ ಪ್ರತಿಯೊಬ್ಬರು ನಮ್ಮ ನಮ್ಮ ಹೃದಯದ ಚಟದಂತೆಯೇ ನಡೆಯುತ್ತೇವೆ' ಎಂದು
ಹೇಳುವರು."

### ಇಸ್ರಯೇಲಿನ ದೇವದ್ರೋಹ

13 ಸರ್ವೇಶ್ವರ ಇಂತೆಂದರು:
"ಇಂಥ ಸುದ್ದಿಯನ್ನು ಯಾರು ಕೇಳಿದ್ದಾರೆಂದು
ಅನ್ಯಜನಾಂಗಗಳಲ್ಲೆ ವಿಚಾರಿಸಿರಿ.
ಇಸ್ರಯೇಲೆಂಬ ಯುವತಿ ಕೇವಲ
ಅಸಹ್ಯಕಾರ್ಯವನ್ನೆ ಎಸಗಿದ್ದಾಳೆ.
14 ಲೆಬನೋನಿನ ಹಿಮವು ಅರಣ್ಯದಾ
ಶಿಖರದಿಂದ ತಪ್ಪುವುದುಂಟೆ?
ಅಲ್ಲಿಂದ ಇಳಿದು ಹರಿಯುವ ತೊರೆಯ ನೀರು
ಬತ್ತುವುದುಂಟೆ?
15 ನನ್ನ ಜನರಾದರೋ ನನ್ನನ್ನು ಮರೆತು
ವ್ಯರ್ಥವಿಗ್ರಹಗಳಿಗೆ ಧೂಪಾರತಿ
ಎತ್ತಿದ್ದುಂಟು.
ಸನಾತನ ಸನ್ಮಾರ್ಗಗಳಲ್ಲಿ ಮುಗ್ಗರಿಸಿ

ಸರಿಯಲ್ಲದ ಸೀಳುದಾರಿಯಲ್ಲಿ
ಅಲೆದದ್ದುಂಟು.
16 ಆದ್ದರಿಂದ ನಾಡನ್ನು ಭಯಾನಕವಾಗಿ
ಸುವರು
ಹಾದು ಹೋಗುವವರೆಲ್ಲ ಬೆಬ್ಬೆರಗಾಗಿ
ತಲೆದೂಗುವರು,
ಸಿಳ್ಳು ಹಾಕಿ ಅದನ್ನು ಪರಿಹಾಸ್ಯ ಮಾಡುವರು.
17 ಶತ್ರುಗಳು ಮೇಲೆ ಬಿದ್ದು ದಾಳಿಮಾಡಲು
ಬಂದಾಗ
ಮೂಡಣ ಬಿರುಗಾಳಿ ಮುಂದೆ ಧೂಳಿ
ಮಣ್ಣಿನಂತೆ
ನನ್ನ ಜನರನ್ನು ದಿಕ್ಕುಪಾಲಾಗಿ ಚದರಿಸುವೆನು.
ಅವರ ಆ ವಿಪತ್ತಿನ ದಿನದಂದು
ಅವರತ್ತ ಮುಖತಿರುಗಿಸದೆ ಬೆನ್ನು
ಮಾಡುವೆನು."

**ಯೆರೆಮೀಯನ ವಿರುದ್ಧ ಒಳಸಂಚು**

18 ಆಗ ಜನರು, "ಬನ್ನಿ, ಈ ಯೆರೆಮೀಯನ ವಿರುದ್ಧ ಒಳಸಂಚುಮಾಡೋಣ. ಧರ್ಮೋಪದೇಶಕ್ಕೆ ಯಾಜಕರಿದ್ದಾರೆ. ಮಂತ್ರಾಲೋಚನೆಗೆ ಜ್ಞಾನಿಗಳಿದ್ದಾರೆ. ದೈವೋಕ್ತಿಗೆ ಪ್ರವಾದಿಯ ಕೊರತೆ ಎಂದಿಗೂ ಇಲ್ಲ. ಬನ್ನಿ, ಇವನ ಬಾಯಿ ಬಡಿಯೋಣ. ಇವನ ಯಾವ ಮಾತಿಗೂ ನಾವು ಕಿವಿಗೊಡಬೇಕಾಗಿಲ್ಲ," ಎಂದುಕೊಂಡರು.

19 ಯೆರೆಮೀಯ: "ಸರ್ವೇಶ್ವರಾ, ನನ್ನ ಕಡೆಗೆ ಕಿವಿಗೊಡಿ. ನನ್ನೊಡನೆ ವಾದಿಸುವವರ ಮಾತನ್ನು
ಗಮನಿಸಿ ನೋಡಿ. 20ಮಾಡಿದ ಮೇಲಿಗೆ ಕೇಡಿನ ಪ್ರತಿಫಲವೆ? ನನ್ನ ಪ್ರಾಣ ಹಿಡಿಯಲು ಗುಂಡಿಯನ್ನು
ತೋಡಿದ್ದಾರೆ. ಅವರ ಮೇಲೆ ನಿಮಗಿದ್ದ ಕೋಪಾವೇಶವನ್ನು ಶಮನಗೊಳಿಸಲು ನಿಮ್ಮ ಮುಂದೆ ನಿಂತು
ನಾನು ವಿನಂತಿಸಿದ್ದನ್ನು ನೆನಪಿಗೆ ತಂದುಕೊಳ್ಳಿ. 21ಆದರೆ ಈಗ ಅವರ ಮಕ್ಕಳು ಕ್ಷಾಮಕ್ಕೆ ಗುರಿಯಾಗಲಿ,
ಕತ್ತಿಗೆ ತುತ್ತಾಗಲಿ. ಅವರ ಮಡದಿಯರು ವಿಧವೆಯರಾಗಲಿ, ಮಕ್ಕಳನ್ನು ಕಳೆದುಕೊಳ್ಳಲಿ, ಅವರ ಗಂಡಂದಿರು
ಸತ್ತು ಬೀಳಲಿ. ಯುವಕರು ಕಾಳಗ-ಕತ್ತಿಗೆ ಬಲಿಯಾಗಲಿ. 22ಕಳ್ಳಕಾಕರ ಗುಂಪು ಫಕ್ಕನೆ ಅವರ ಮೇಲೆ
ಬೀಳಲಿ. ಅವರ ಮನೆಮಠಗಳಿಂದ ಕಿರಿಚಾಟ ಕೇಳಿಬರಲಿ. ಅವರು ನನ್ನನ್ನು ಕೆಡವಲು ಗುಂಡಿಯನ್ನು
ತೋಡಿದ್ದಾರೆ. ನನ್ನ ಕಾಲುಗಳಿಗೆ ಉರುಲನ್ನು ಗುಟ್ಟಾಗಿ ಒಡ್ಡಿದ್ದಾರೆ. 23ಸರ್ವೇಶ್ವರಾ, ನನ್ನನ್ನು ಕೊಲ್ಲಲು
ಅವರು ಮಾಡಿಕೊಂಡಿರುವ ಸಂಚು ನಿಮಗೆ ತಿಳಿದಿದೆ. ಅವರ ಅಪರಾಧವನ್ನು ಕ್ಷಮಿಸಬೇಡಿ, ಅವರ ಪಾಪವನ್ನು ಅಳಿಸಬೇಡಿ, ಅದು ನಿಮ್ಮ ಕಣ್ಣೆದುರಿಗೇ ಇರಲಿ. ಅವರು ನಿಮ್ಮ ಮುಂದೆ ಎಡವಿಬೀಳಲಿ. ನಿಮ್ಮ ಕೋಪ ವ್ಯಕ್ತವಾಗುವಾಗ ಅವರಿಗೆ ತಕ್ಕುದನ್ನು ಮಾಡಿ."

**ಒಡಕು ಮಡಕೆಯ ಸಾಮತಿ**

**19** ಸರ್ವೇಶ್ವರಸ್ವಾಮಿ ನನಗೆ ಹೀಗೆ ಹೇಳಿದರು: "ಹೋಗು, ಕುಂಬಾರ ಮಾಡಿದ ಮಣ್ಣಿನ
ಮಡಕೆಯೊಂದನ್ನು ಕೊಂಡುಕೊ. ಜನರ ಹಿರಿಯರಲ್ಲೂ ಯಾಜಕರ ಹಿರಿಯರಲ್ಲೂ ಕೆಲವರನ್ನು
ಕರೆದುಕೊಂಡು 2ಬೋಕಿಯ ಬಾಗಿಲಿನ ಸಮೀಪದಲ್ಲಿರುವ 'ಬೆನ್‍ಹಿನ್ನೋಮ್' ಕಣಿವೆಗೆ ಹೋಗು. ನಾನು
ನಿನಗೆ ತಿಳಿಸುವ ಈ ಸಂದೇಶವನ್ನು ಅಲ್ಲಿ ಸಾರು – 3'ಜುದೇಯದ ಅರಸರೇ, ಜೆರುಸಲೇಮಿನ ನಿವಾಸಿಗಳೇ,
ಸರ್ವೇಶ್ವರನ ಸಂದೇಶವನ್ನು ಕೇಳಿರಿ. ಇದು ಇಸ್ರಯೇಲರ ದೇವರೂ ಸರ್ವಶಕ್ತರೂ ಆದ ಸರ್ವೇಶ್ವರನ

ನುಡಿ: ಈ ಸ್ಥಳದ ಮೇಲೆ ನಾನು ಕೇಡನ್ನು ಬರಮಾಡುವೆನು. ಅದರ ಸುದ್ದಿಯನ್ನು ಕೇಳುವವರ ಕಿವಿಗಳೂ
ನಿಮಿರುವುವು. 4ಈ ಜನರು ನನ್ನನ್ನು ತೊರೆದು ಬಿಟ್ಟು ತಮಗಾಗಲಿ, ತಮ್ಮ ಪೂರ್ವಜರಿಗಾಗಲಿ,
ಜುದೇಯದ ಅರಸರಿಗಾಗಲಿ ತಿಳಿಯದ ಅನ್ಯದೇವತೆಗಳಿಗೆ ಧೂಪಾರತಿ ಎತ್ತಿದ್ದಾರೆ. ಈ ಸ್ಥಳವನ್ನು
ಅಪವಿತ್ರಗೊಳಿಸಿದ್ದಾರೆ. ನಿರ್ದೋಷಿಗಳ ರಕ್ತದಿಂದ ತುಂಬಿಸಿದ್ದಾರೆ. 5ತಮ್ಮ ಮಕ್ಕಳನ್ನು ಬಾಳ್‌ದೇವತೆಗೆ
ಆಹುತಿಕೊಡಲು ಆ ದೇವತೆಗೆ ಬಲಿಪೀಠಗಳನ್ನು ಕೂಡ ಏರ್ಪಡಿಸಿದ್ದಾರೆ. ನಾನು ಇಂಥ ಆಚಾರಗಳನ್ನು
ವಿಧಿಸಲಿಲ್ಲ. ಅದರ ಮಾತನ್ನೇ ಎತ್ತಲಿಲ್ಲ. ಅಂಥದ್ದು ನನ್ನ ಮನಸ್ಸಿಗೂ ತೋಚಿದ್ದಿಲ್ಲ. 6ಆದಕಾರಣ ಈ ಸ್ಥಳಕ್ಕೆ
ತೋಫೆತ್ ಮತ್ತು ಬೆನ್‌ಹಿನ್ನೋಮಿನ ಕಣಿವೆ ಎಂಬ ಹೆಸರುಗಳು ಹೋಗಿ, 'ಕೊಲೆಯ ಕಣಿವೆ' ಎಂದು
ಹೆಸರಿಸಲಾಗುವ ಕಾಲ ಬರುವುದು. 7ಈ ಸ್ಥಳದಲ್ಲಿ ಯೆಹೂದ್ಯರ ಮತ್ತು ಜೆರುಸಲೇಮಿನವರ
ಯೋಜನೆಗಳನ್ನು ಮಣ್ಣುಪಾಲಾಗಿಸುವೆನು. ಅವರ ಶತ್ರುಗಳ ಹಾಗು ಕೊಲೆಗಡುಕರ ಕತ್ತಿಗೆ ಅವರನ್ನು
ತುತ್ತಾಗಿಸುವೆನು. ಅವರ ಹೆಣಗಳನ್ನು ಆಕಾಶದ ಪಕ್ಷಿಗಳಿಗೂ ಭೂಜಂತುಗಳಿಗೂ ಆಹಾರವಾಗಿಸುವೆನು. 8ಈ
ನಗರವನ್ನು ಭಯಾನಕ ಹಾಗೂ ಹಾಸ್ಯಾಸ್ಪದ ಸ್ಥಳವನ್ನಾಗಿಸುವೆನು. ಹಾದು ಹೋಗುವವರೆಲ್ಲರು ಅದಕ್ಕೆ
ಒದಗಿದ ವಿಪತ್ತನ್ನು ಕಂಡು ನಿಬ್ಬೆರಗಾಗಿ ಹೀಗಳೆಯುವರು. 9ಅವರ ಶತ್ರುಗಳು, ಕೊಲೆಗಡುಕರು ಅವರನ್ನು
ಮುತ್ತಿ ನಸುಕುವಾಗ ಒಬ್ಬರು ಮತ್ತೊಬ್ಬರನ್ನು ತಿನ್ನುವುದು ಮಾತ್ರವಲ್ಲ, ತಮ್ಮ ಪುತ್ರಪುತ್ರಿಯರ ಮಾಂಸವನ್ನೇ
ತಿನ್ನುವರು.'

10 "ಆಗ ನೀನು, ನಿನ್ನ ಸಂಗಡ ಬಂದವರ ಕಣ್ಣೆದುರಿಗೇ ಆ ಮಣ್ಣಿನ ಮಡಕೆಯನ್ನು ಒಡೆದು
ಬಿಟ್ಟು ಅವರಿಗೆ ಹೀಗೆಂದು ನುಡಿ: 11ಸರ್ವಶಕ್ತ ಸರ್ವೇಶ್ವರನ ಸಂದೇಶವಿದು – ಕುಂಬಾರ ಮಾಡಿದ ಮಣ್ಣಿನ
ಮಡಕೆಯನ್ನು ಒಡೆದುಹಾಕಿದ ಮೇಲೆ ಸರಿಪಡಿಸಲಾಗದು. ಅಂತೆಯೇ ನಾನು ಈ ಜನರನ್ನು ಹಾಗು
ನಗರವನ್ನು ಒಡೆದು ಹಾಕುವೆನು. ಹೂಣಲು ಇನ್ನೆಲ್ಲಿಯೂ ಸ್ಥಳವಿಲ್ಲವಾಗಿ ಹೆಣಗಳನ್ನು ಈ ತೋಫೆತಿನಲ್ಲೇ
ಹೂಣುವರು. 12ನಾನು ಈ ಸ್ಥಳವನ್ನೂ ಇದರ ನಿವಾಸಿಗಳನ್ನೂ ಅಷ್ಟರಮಟ್ಟಿಗೆ ನಾಶಪಡಿಸಿ ಈ ನಗರವನ್ನು
ತೋಫೆತಿನ ಪರಿಸ್ಥಿತಿಗೆ ಇಳಿಸುವೆನು. 13ಜೆರುಸಲೇಮಿನ ಮನೆಗಳೂ ಜುದೇಯದ ಅರಸರ ಮನೆಗಳೂ,
ಅಂದರೆ ಯಾವ ಯಾವ ಮನೆ ಮಾಳಿಗೆಗಳ ಮೇಲೆ ಆಕಾಶದ ನಕ್ಷತ್ರಗಣಕ್ಕೆಲ್ಲ ಧೂಪಾರತಿ ಎತ್ತಿ
ಅನ್ಯದೇವತೆಗಳಿಗೆ ಪಾನ ನೈವೇದ್ಯಗಳನ್ನು ಸುರಿದಿದ್ದಾರೋ ಆ ಮನೆಗಳೆಲ್ಲ ಹೊಲಸಾಗಿ ತೋಫೆತ್ ಸ್ಥಳಕ್ಕೆ
ಸಮಾನವಾಗುವುವು."

14 ಯೆರೆಮೀಯನು ಸರ್ವೇಶ್ವರಸ್ವಾಮಿಯ ಅಪ್ಪಣೆಯಂತೆ ತೋಫೆತಿನಲ್ಲಿ ಪ್ರವಾದಿಸಿದ ಬಳಿಕ
ಅಲ್ಲಿಂದ ಬಂದು ಸರ್ವೇಶ್ವರನ ಆಲಯದ ಪ್ರಾಕಾರದಲ್ಲಿ ನಿಂತುಕೊಂಡು: 15"ಇಸ್ರಯೇಲರ ದೇವರೂ
ಸರ್ವಶಕ್ತರೂ ಆದ ಸರ್ವೇಶ್ವರ ಹೀಗೆನ್ನುತ್ತಾರೆ – ಈ ನಗರದವರೂ ಇದರ ಸುತ್ತಮುತ್ತಿನ ಊರಿನವರೂ
ನನ್ನ ಮಾತನ್ನು ಕೇಳದೆ ಹೋದರು. ತಮ್ಮ ಮನಸ್ಸನ್ನು ಕಲ್ಲಾಗಿಸಿಕೊಂಡರು. ಆದುದರಿಂದ ನಾನು ಈ
ನಗರಕ್ಕೆ ಶಾಪ ಹಾಕಿದ ಕೇಡನ್ನೆಲ್ಲಾ ಅವರಿಗೆ ಬರಮಾಡುವೆನು," ಎಂದು ಎಲ್ಲ ಜನರಿಗೆ ಸಾರಿದನು.

**ಯಾಜಕ ಪಷ್ಹೂರನಿಗೆ ಶಾಪ**

**20** ಯೆರೆಮೀಯ ಈ ಪ್ರವಾದನೆ ಮಾಡುವುದನ್ನು ಇಮ್ಮೇರನ ಮಗ ಹಾಗು ಸರ್ವೇಶ್ವರನ ಆಲಯದ
ಮುಖ್ಯಾಧಿಕಾರಿಯಾದ ಯಾಜಕ ಪಷ್ಹೂರನು ಕೇಳಿದನು. 2ಅವನು ಪ್ರವಾದಿ ಯೆರೆಮೀಯನನ್ನು
ಹೊಡೆಯಿಸಿ ಸರ್ವೇಶ್ವರನ ಆಲಯಕ್ಕೆ ಸೇರಿದ ಮೇಲಣ ಬೆನ್ಯಾಮೀನ್ ಬಾಗಿಲ ಬಳಿಯಲ್ಲಿದ್ದ ಸೆರೆಗೆ
ಹಾಕಿಸಿದನು. 3ಮರುದಿನ ಆ ಪಷ್ಹೂರನು ಯೆರೆಮೀಯನನ್ನು ಸೆರೆಯಿಂದ ಬಿಡಿಸಿದಾಗ ಯೆರೆಮೀಯ
ಅವನಿಗೆ ಹೀಗೆಂದು ಹೇಳಿದನು: "ಸರ್ವೇಶ್ವರ ನಿನ್ನ ಹೆಸರನ್ನು ಪಷ್ಹೂರ್ ಎಂದು ಕರೆಯದೆ 'ಮಾಗೋರ್
ಮಿಸ್ಸಾಬೀಬ್' ಎಂದು ಕರೆದಿದ್ದಾರೆ. 4ಏಕೆಂದರೆ ಸರ್ವೇಶ್ವರನೆ ಹೇಳಿರುವ ಮಾತಿವು – 'ಇಗೋ, ನಾನು
ನಿನ್ನನ್ನು ನಿನಗೂ ನಿನ್ನ ಎಲ್ಲ ಸ್ನೇಹಿತರಿಗೂ ಭಯಾನಕನನ್ನಾಗಿ ಮಾಡುವೆನು. ಅವರು ತಮ್ಮ ಶತ್ರುಗಳ
ಖಡ್ಗದಿಂದ ಬೀಳುವರು. ಅದನ್ನು ನೀನು ಕಣ್ಣಾರೆ ಕಾಣುವೆ. ನಾನು ಜುದೇಯರನ್ನೆಲ್ಲ ಬಾಬಿಲೋನಿನ
ಅರಸನ ಕೈಗೊಪ್ಪಿಸುವೆನು. ಅವನು ಇವರನ್ನು ಬಾಬಿಲೋನಿಗೆ ಸೆರೆಯಾಗಿ ಕೊಂಡೊಯ್ದು ಕತ್ತಿಗೆ

ತುತ್ತಾಗಿಸುವನು. 5ಅಷ್ಟು ಮಾತ್ರವಲ್ಲ, ಈ ನಗರದ ಎಲ್ಲ ಆಸ್ತಿಯನ್ನೂ ಆದಾಯವನ್ನೂ ಸಂಪತ್ತನ್ನೂ ಹಾಗು ಜುದೇಯದ ಅರಸರ ಸಕಲ ನಿಧಿನಿಕ್ಷೇಪಗಳನ್ನೂ ಇವರ ಶತ್ರುಗಳ ಕೈವಶಮಾಡುವೆನು. ಅವರು ಅವುಗಳನ್ನು ಕೊಳ್ಳೆಹೊಡೆದು ಬಾಬಿಲೋನಿಗೆ ತೆಗೆದುಕೊಂಡು ಹೋಗುವರು. 6ಪಷ್ಹೂರನೇ ಕೇಳು, ನೀನು ನಿನ್ನ ಮನೆಯ ಎಲ್ಲರೊಡನೆ ಸೆರೆಗೆ ಹೋಗುವೆ. ನೀನು ಮತ್ತು ನಿನ್ನ ಸುಳ್ಳು ಪ್ರವಾದನೆಯನ್ನು ಕೇಳಿದ ನಿನ್ನ ಸಕಲ ಗೆಳೆಯರೂ ಬಾಬಿಲೋನಿಗೆ ಸೇರಿ ಅಲ್ಲೆ ಸತ್ತು ಮಣ್ಣಾಗುವಿರಿ’.”

### ಯೆರೆಮೀಯನ ಪ್ರಲಾಪ

7 ಸರ್ವೇಶ್ವರಾ, ನೀವು ನನ್ನನ್ನು ಮರುಳಾಗಿಸಿದಿರಿ.
ನಾನು ಮರುಳಾದೆ.
ನೀವು ನನ್ನನ್ನು ಗೆದ್ದುಬಿಟ್ಟಿರಿ,
ನೀವು ನನಗಿಂತ ಬಲಿಷ್ಠರಲ್ಲವೆ?
ಎಲ್ಲರು ನನ್ನನ್ನು ಅಣಕಿಸುವವರೆ,
ದಿನವೆಲ್ಲ ನಾನು ಅಪಹಾಸ್ಯಕ್ಕೆ ಬಲಿಯಾದೆ.
8 ನನ್ನ ಮಾತೆಲ್ಲ ಅರಚಾಟ
‘ಹಿಂಸಾಚಾರ, ಕೊಳ್ಳೆ’ ಇವೇ ನನ್ನ ಕೂಗಾಟ.
ಸರ್ವೇಶ್ವರನ ವಾಕ್ಯವನ್ನು ನಾನು ಸಾರಿದೆ
ಜನರ ನಿಂದೆ ಪರಿಹಾಸ್ಯಕ್ಕೆ ಗುರಿಯಾದೆ.
9 ‘ಸರ್ವೇಶ್ವರನ ವಿಷಯವನ್ನು ಪ್ರಕಟಿಸೆನು,
ಅವರ ಹೆಸರಿನಲ್ಲಿ ಇನ್ನು ಮಾತಾಡೆನು’
ಎಂದುಕೊಂಡೆನಾದರೆ
ನನ್ನ ಹೃದಯದೊಳು ಸಂಕಟ ಉಂಟಾಗುತ್ತದೆ.
ಸುಡುಬೆಂಕಿ ನನ್ನೆಲುಬುಗಳಲ್ಲಿ ಅಡಗಿದೆಯೋ
ಎಂಬಂತೆ
ಅದನ್ನು ತಡೆತಡೆದು ದಣಿದಿರುವೆ, ಇನ್ನು
ಸಹಿಸಲಾಗದಿದೆ.
10 ಸುತ್ತಮುತ್ತಲು ದಿಗಿಲೆಂದರೆ ದಿಗಿಲು !
‘ಬನ್ನಿ, ಇವರ ಮೇಲೆ ಚಾಡಿ ಹೇಳಿ, ನಾವೂ
ಹೇಳುವೆವು’
ಎಂದು ಗುಸುಗುಟ್ಟುತ್ತಿರುವರು ಬಹು ಜನರು.
‘ಇವನು ಎಡವಿಬೀಳಲಿ, ನಾವು ಹೊಂಚಿ
ನೋಡುವೆವು’
ಎನ್ನುತ್ತಿರುವರು ನನ್ನಾಪ್ತ ಮಿತ್ರರೆಲ್ಲರು.
‘ಇವನು ಸಿಕ್ಕಿಬೀಳಲಿ, ಆಗ ಗೆದ್ದು
ಮುಯ್ಯಿತೀರಿಸಿಕೊಳ್ಳುವೆವು.’
ಎಂದುಕೊಳ್ಳುತ್ತಿರುವರು ತಮ್ಮತಮ್ಮೊಳಗೆ.
11 ಆದರೆ ನನ್ನ ಸಂಗಡ ಇರುವರು ಸರ್ವೇಶ್ವರ
ಭಯಂಕರ ಶೂರನಂತೆ
ನನ್ನ ಹಿಂಸಕರು ಮುಗ್ಗರಿಸಿ ಬೀಳುವರು
ಜಯ ಸಾಧಿಸದೆ.
ನಾಚಿಕೆಗೆ ಈಡಾಗುವರು ತಮ್ಮ ಯೋಜನೆ

ಕೈಗೂಡದೆ
ಶಾಶ್ವತ ಅವಮಾನಕ್ಕೆ ಗುರಿಯಾಗುವರು
ಎಂದಿಗೂ ಮರೆಯಲಾಗದಂತೆ.
12 ಸರ್ವಶಕ್ತರಾದ ಸರ್ವೇಶ್ವರಾ,
ನೀವು ಸತ್ಪುರುಷರನ್ನು ಪರಿಶೋಧಿಸುವರು
ಅಂತರಿಂದ್ರಿಯಗಳನ್ನೂ ಅಂತರಾಳವನ್ನೂ
ವೀಕ್ಷಿಸುವವರು.
ನನ್ನ ವ್ಯಾಜ್ಯವನ್ನು ನಿಮಗೆ ಅರಿಕೆಮಾಡಿರುವೆನು
ನನ್ನ ಹಿಂಸಕರಿಗೆ ನೀವು ವಿಧಿಸುವ
ಪ್ರತಿದಂಡನೆಯನ್ನು
ನಾನು ನೋಡುವಂತೆ ಮಾಡಿ.
13 ಸರ್ವೇಶ್ವರನನ್ನು ಸ್ತುತಿಸಿರಿ, ಸರ್ವೇಶ್ವರನನ್ನು
ಸಂಕೀರ್ತಿಸಿರಿ.
ಅವರು ಬಡವರ ಪ್ರಾಣವನ್ನು ಬಿಡಿಸಿದ್ದಾರೆ
ಕೆಡುಕರ ಕೈಯಿಂದ.
14 ಶಪಿಸಲ್ಪಡಲಿ ನಾ ಹುಟ್ಟಿದಾ ದಿನವು !
ಶುಭವೆನಿಸಿಕೊಳ್ಳದಿರಲಿ ತಾಯಿ ನನ್ನನ್ನು
ಹೆತ್ತಿದಾ ದಿನವು.
15 ಶಪಿಸಲ್ಪಡಲಿ 'ನಿನಗೆ ಗಂಡು ಹುಟ್ಟಿದೆ' ಎಂದು
ನನ್ನ ತಂದೆಗೆ ತಿಳಿಸಿದಾತ !
ಕೇವಲ ಸಂತಸವನ್ನು ನನ್ನ ತಂದೆಯಲ್ಲಿ
ಉಂಟುಮಾಡಿದಾತ.
16 ಸರ್ವೇಶ್ವರನು ಕನಿಕರಿಸದೆ ಕೆಡವಿಬಿಟ್ಟ
ಪಟ್ಟಣದ ಗತಿ ಅವನಿಗಾಗಲಿ !
ಬೆಳಿಗ್ಗೆ ಕಿರುಚಾಟ, ನಡುಹಗಲಲ್ಲಿ ಕೂಗಾಟ
ಅವನ ಕಿವಿಗೆ ಬೀಳಲಿ !
17 ತಾಯಗರ್ಭದಲ್ಲಿರುವಾಗಲೆ ಅವನೇಕೆ
ನನ್ನನ್ನು ಕೊಂದುಹಾಕಲಿಲ್ಲ?
ಆಗ ನನ್ನ ತಾಯೇ ನನಗೆ
ಗೋರಿಯಾಗುತ್ತಿದ್ದಳಲ್ಲಾ !
ಆಕೆಯ ಗರ್ಭ ಸದಾ ಬಸಿರಾಗಿಯೇ
ಇರುತ್ತಿತ್ತಲ್ಲಾ !
18 ಗರ್ಭಬಿಟ್ಟು ನಾನೇಕೆ ಹೊರಬಂದೆ?
ಕಷ್ಟದುಃಖಗಳನ್ನು ಅನುಭವಿಸುವುದಕ್ಕೊ?
ಅವಮಾನದಲ್ಲೆ ಬಾಳಿನ ದಿನಗಳನ್ನೆಲ್ಲ
ಕಳೆಯುವುದಕ್ಕೊ?

## ಚಿದ್ಕೀಯರಸನ ದೂತರಿಗೆ ಯೆರೆಮೀಯನ ಉತ್ತರ

**21** ಅರಸ ಚಿದ್ಕೀಯನು ಮಲ್ಕೀಯನ ಮಗನಾದ ಷಷ್ಠೂರನನ್ನು ಹಾಗು ಯಾಜಕ ಮಾಸೇಯನ
ಮಗನಾದ ಜೆಫನ್ಯನನ್ನು ಯೆರೆಮೀಯನ ಬಳಿಗೆ ದೂರತನ್ನಾಗಿ ಕಳುಹಿಸಿದನು. 2ಇವರು ಬಂದು,
"ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ನಮಗೆ ವಿರುದ್ಧ ಯುದ್ಧ ಮಾಡುತ್ತಿರುವುದು ತಿಳಿದ ವಿಷಯ.
ಸರ್ವೇಶ್ವರ ಸ್ವಾಮಿ ನಮ್ಮ ಪಕ್ಷವಹಿಸುವರೆ? ತಮ್ಮ ಅದ್ಭುತಗಳಲ್ಲಿ ಒಂದನ್ನು ಮಾಡಿ ಈ ಶತ್ರುವನ್ನು ನಮ್ಮಿಂದ
ತೊಲಗುವಂತೆ ಮಾಡಬಹುದೆ? ದಯಮಾಡಿ ಸರ್ವೇಶ್ವರನ ಚಿತ್ತವೇನೆಂದು ವಿಚಾರಿಸಿ ತಿಳಿಸಬೇಕು,"
ಎಂದು ವಿನಂತಿಸಿದರು.

3 ಆಗ ಯೆರೆಮೀಯನಿಗೆ ಸರ್ವೇಶ್ವರನ ವಾಣಿ ಉಂಟಾಗಿ, ಆ ದೂತರಿಗೆ, "ನೀವು ಹೋಗಿ
ಚಿದ್ಕೀಯನಿಗೆ ಈ ಉತ್ತರವನ್ನು ತಿಳಿಸಿರಿ: 4ಇಸ್ರಯೇಲರ ದೇವರಾದ ಸರ್ವೇಶ್ವರ ಇಂತೆನ್ನುತ್ತಾರೆ: 'ಇಗೋ
ನಿಮ್ಮ ಪೌಳಿಗೋಡೆಗೆ ಮುತ್ತಿಗೆ ಹಾಕಿರುವ ಬಾಬಿಲೋನಿನ ಅರಸನಿಗೂ ಅವನ ಸೈನಿಕರಿಗೂ ವಿರುದ್ಧವಾಗಿ
ನೀವು ಹಿಡಿದಿರುವ ಆಯುಧಗಳನ್ನು ನಿಮ್ಮ ವಿರುದ್ಧವಾಗಿಯೇ ತಿರುಗಿಸಿಬಿಡುವೆನು. ಅವುಗಳನ್ನೆಲ್ಲ ಈ
ನಗರದ ನಡುವೆ ಗುಡ್ಡೆ ಹಾಕಿಸುವೆನು. 5ನಾನೇ ನಿಮಗೆ ವಿರುದ್ಧವಾಗಿ ಕಡುಕೋಪದಿಂದ,
ರೋಷಾವೇಶದಿಂದ, ಕ್ರೋಧಭರಿತನಾಗಿ, ಚಾಚಿದ ಕೈಯಿಂದಲೂ ಭುಜಪರಾಕ್ರಮದಿಂದಲೂ ಯುದ್ಧ
ಮಾಡುವೆನು. 6ಈ ನಗರದಲ್ಲಿ ವಾಸಮಾಡುವ ಜನರನ್ನೂ ಜಾನುವಾರುಗಳನ್ನೂ ಹಿಂಸೆಗೆ
ಗುರಿಪಡಿಸುವೆನು; ಘೋರ ಜಾಡ್ಯಕ್ಕೆ ತುತ್ತಾಗಿಸಿ ಸಾಯುವಂತೆ ಮಾಡುವೆನು. 7ಬಳಿಕ ನಾನು ಜುದೇಯದ
ಅರಸ ಚಿದ್ಕೀಯನನ್ನೂ ಅವನ ಸೇವಕರನ್ನೂ ಹಾಗೂ ವ್ಯಾಧಿ, ಖಡ್ಗ, ಕ್ಷಾಮಗಳಿಂದ ಅಳಿಯದೆ ಉಳಿದ
ಪ್ರಜೆಗಳನ್ನೂ ಬಾಬಿಲೋನಿನ ಅರಸ ನೆಬೂಕದ್ನೆಚ್ಚರನ ಕೈಗೂ ಅವರ ಪ್ರಾಣವನ್ನು ಹುಡುಕುತ್ತಿರುವ ಅವರ
ಶತ್ರುಗಳ ಕೈಗೂ ಬಿಟ್ಟುಬಿಡುವೆನು. ಅವನು ಅವರನ್ನು ಕತ್ತಿಯಿಂದ ಕೊಂದುಹಾಕುವನು. ಅವರನ್ನು
ಕರುಣಿಸನು, ಕನಿಕರಿಸನು, ಉಳಿಯಗೊಳಿಸನು."

8"ಇದೂ ಅಲ್ಲದೆ ಸರ್ವೇಶ್ವರ ಈ ಜನರಿಗೆ ಹೀಗೆಂದು ತಿಳಿಸಲು ನನಗೆ ಆಜ್ಞಾಪಿಸಿದ್ದಾರೆ: 'ಇಗೋ
ಜೀವದ ಮಾರ್ಗವನ್ನು ಮತ್ತು ಸಾವಿನ ಮಾರ್ಗವನ್ನು ನಿಮ್ಮ ಮುಂದೆ ತೆರೆದಿಟ್ಟಿದ್ದೇನೆ. 9ನಗರದಲ್ಲೆ
ನಿಲ್ಲುವವನು ಖಡ್ಗ – ಕ್ಷಾಮ – ವ್ಯಾಧಿಗಳಿಂದ ಸಾಯುವನು. ನಿಮಗೆ ಮುತ್ತಿಗೆ ಹಾಕುತ್ತಿರುವ
ಬಾಬಿಲೋನಿಯಾದವರಿಗೆ ಮರೆಹೋಗಲು ನಗರವನ್ನು ಬಿಡುವವನು ಬದುಕುವನು. ತನ್ನ ಪ್ರಾಣವನ್ನಾದರು
ಬಾಚಿಕೊಂಡು ಹೋಗುವನು. 10ಈ ನಗರಕ್ಕೆ ಒಳಿತನ್ನು ಅಲ್ಲ, ಕೆಡುಕನ್ನು ಮಾಡಲೆಂದೆ ಇದರ ಮೇಲೆ
ಕಣ್ಣಿಟ್ಟಿದ್ದೇನೆ. ಇದು ಬಾಬಿಲೋನಿಯಾದ ಅರಸನ ಕೈವಶವಾಗುವುದು. ಅವನು ಇದನ್ನು ಸುಟ್ಟು
ಭಸ್ಮಮಾಡುವನು. ಇದು ಸರ್ವೇಶ್ವರನಾದ ನನ್ನ ನುಡಿ.'

## ಜುದೇಯದ ರಾಜವಂಶಕ್ಕೆ ಶಾಪ

11 "ಜುದೇಯದ ಅರಸನ ಮನೆತನದ ವಿಷಯವಾಗಿ ಸರ್ವೇಶ್ವರ ಹೇಳಿರುವ ಈ ಮಾತನ್ನು
ಗಮನಿಸಿರಿ: 12'ದಾವೀದ ಮನೆತನದವರೇ, ಸರ್ವೇಶ್ವರನ ಮಾತಿದು: ಮುಂಜಾನೆಯೆ ನ್ಯಾಯನೀತಿಯನ್ನು
ಪರಿಪಾಲಿಸಿರಿ; ವಂಚಿತರನ್ನು ದೋಚಿಕೊಂಡವನ ಕೈಯಿಂದ ಬಿಡಿಸಿರಿ. ಇಲ್ಲವಾದರೆ ನಿಮ್ಮ ದುಷ್ಕೃತ್ಯಗಳ
ನಿಮಿತ್ತ ನನ್ನ ಕೋಪಾಗ್ನಿಯು ಜ್ವಾಲೆಯಂತೆ ಭುಗಿಲೇಳುವುದು, ಅದರ ಕಿಚ್ಚನ್ನು ಮುಚ್ಚಿಡಲು ಯಾರಿಂದಲೂ
ಆಗದು. 13ಕಣಿವೆಯಲ್ಲಿನ ನಗರಿಯೇ, ಬಯಲಿನ ಬಂಡೆಯಲ್ಲಿರುವ ಪುರಿಯೇ, 'ನಮ್ಮ ಮೇಲೆ ಯಾರಿಳಿದು
ಬಂದಾರು? ನಮ್ಮ ನಿವಾಸಗಳಿಗೆ ಯಾರು ನುಗ್ಗಿಯಾರು?' ಎನ್ನುವವರೇ, ಇಗೋ ನಾನೆ ನಿಮಗೆ
ವಿರುದ್ಧವಾಗಿದ್ದೇನೆ.

14 ನಿಮ್ಮ ದುಷ್ಕೃತ್ಯಗಳಿಗೆ ವಿಧಿಸುವೆನು
ತಕ್ಕದಂಡನೆ, ಬೆಂಕಿ ಹಚ್ಚುವೆನು ನಿಮ್ಮ
ಪುರಿಯೆಂಬ ವನಕ್ಕೆ,
ಅದು ಕಬಳಿಸಿಬಿಡುವುದು ಸುತ್ತಮುತ್ತಣ

ವಸ್ತುಗಳನ್ನು."

## ಜುದೇಯದ ರಾಜಮನೆತನಕ್ಕೆ ಧಿಕ್ಕಾರ !

**22** ಸರ್ವೇಶ್ವರಸ್ವಾಮಿ ನನಗೆ ಹೀಗೆ ಎಂದು ಆಜ್ಞೆಮಾಡಿದರು: "ನೀನು ಜುದೇಯದ ಅರಸನ ಮನೆಗೆ
ಹೋಗು. ಅಲ್ಲಿ ಈ ಮಾತನ್ನು ಹೇಳು: 2'ದಾವೀದನ ಸಿಂಹಾಸನಾರೂಢನಾದ ಜುದೇಯದ ಅರಸನೇ,
ಸರ್ವೇಶ್ವರನ ಮಾತನ್ನು ಕೇಳು; ನಿನ್ನ ಪರಿವಾರದವರೂ ಈ ಬಾಗಿಲುಗಳಲ್ಲಿ ಪ್ರವೇಶಿಸುವ ನಿನ್ನ ಪ್ರಜೆಗಳೂ
ಕೇಳಲಿ; 3ಸರ್ವೇಶ್ವರನ ಸಂದೇಶ ಇದು: ನ್ಯಾಯ ನೀತಿಯನ್ನು ಆಚರಿಸಿರಿ. ವಂಚಿತನಾದವನನ್ನು
ದೋಚಿಕೊಳ್ಳುವವನ ಕೈಯಿಂದ ಬಿಡಿಸಿರಿ. ಪರದೇಶೀಯರಿಗೆ, ಅನಾಥರಿಗೆ, ವಿಧವೆಯರಿಗೆ
ಅನ್ಯಾಯಮಾಡಬೇಡಿ, ಅವರನ್ನು ಹಿಂಸಿಸಬೇಡಿ. ನಿರಪರಾಧಿಗಳ ರಕ್ತವನ್ನು ಈ ಸ್ಥಳದಲ್ಲಿ ಸುರಿಸಬೇಡಿ.
4ನೀವು ಈ ಆಜ್ಞೆಗಳನ್ನು ಮನಃಪೂರ್ವಕವಾಗಿ ಕೈಗೊಂಡು ನಡೆದಿರಾದರೆ ದಾವೀದನ
ಸಿಂಹಾಸನಾರೂಢರಾದ ಅರಸರು ರಥಾಶ್ವಗಳನ್ನೇರಿ ತಮ್ಮ ಪರಿವಾರದೊಡನೆ ಹಾಗು ಪ್ರಜೆಗಳೊಡನೆ ಈ
ಅರಮನೆಯ ಬಾಗಿಲುಗಳಲ್ಲಿ ಪ್ರವೇಶಿಸುವರು. 5ನೀವು ಈ ಮಾತುಗಳನ್ನು ಕೇಳದೆಹೋದರೆ ಈ ಅರಮನೆ
ಹಾಳುಬೀಳುವುದು. ಇದನ್ನು ನನ್ನ ಮೇಲೆ ಆಣೆಯಿಟ್ಟು ಹೇಳುತ್ತೇನೆ. ಇದು ಸರ್ವೇಶ್ವರನಾದ ನನ್ನ ನುಡಿ."
6 ಹೌದು, ಜುದೇಯದ ಅರಸನ ಮನೆತನವನ್ನು
ಕುರಿತು
ಸರ್ವೇಶ್ವರ ಹೀಗೆನ್ನುತ್ತಾರೆ:
"ನನ್ನ ದೃಷ್ಟಿಗೆ ನೀನಿರುವೆ ಗಿಲ್ಯಾದಿನಂತೆ,
ಲೆಬನೋನಿನ ಶಿಖರದಂತೆ
ಆದರೆ ನಿನ್ನನ್ನು ಮರುಭೂಮಿಯಂತೆ,
ನಿರ್ಜನಪ್ರದೇಶದಂತೆ
ಮಾಡುವೆನೆಂಬುದು ನಿಶ್ಚಯ.
7 ಆಯುಧ ಸನ್ನದ್ಧರಾದ ಸಂಹಾರಕರನ್ನು
ನಿನಗೆ ವಿರುದ್ಧ ಏರ್ಪಡಿಸುವೆನು.
ಅವರು ನಿನ್ನ ಶ್ರೇಷ್ಠ ದೇವದಾರುಗಳನ್ನು
ಬೆಂಕಿಗೆ ಕಡಿದು ಹಾಕುವರು.

8 ಅನೇಕ ಅನ್ಯಜನಾಂಗದವರು ಈ ನಗರದ ಮಾರ್ಗವಾಗಿ ಹೋಗುತ್ತಾ ಸರ್ವೇಶ್ವರ ಈ
ಮಹಾನಗರಕ್ಕೆ ಹೀಗೇಕೆ ಮಾಡಿದರೆಂದು ಮಾತಾಡಿಕೊಳ್ಳುವರು. 9'ಈ ನಗರದವರು ತಮ್ಮ ದೇವರಾದ
ಸರ್ವೇಶ್ವರನ ಒಡಂಬಡಿಕೆಯನ್ನು ನಿರಾಕರಿಸಿ ಅನ್ಯ ದೇವತೆಗಳನ್ನು ಪೂಜಿಸಿ ಆರಾಧಿಸಿದ್ದರಿಂದಲೇ ಇದಕ್ಕೆ
ಈ ಗತಿಯಾಯಿತು' ಎಂದು ಹೇಳಿಕೊಳ್ಳುವರು."

## ಯೋಷೀಯನಿಗೆ ಧಿಕ್ಕಾರ!

10 "ಸತ್ತವನಿಗಾಗಿ (ಯೋಷೀಯನಿಗಾಗಿ)
ಅಳಬೇಡಿ
ಅವನಿಗಾಗಿ ಗೋಳಾಡಬೇಡಿ.
ಬದಲಿಗೆ ಸೆರೆಹೋದವನಿಗಾಗಿ ಬಿಕ್ಕಿಬಿಕ್ಕಿ ಅಳಿರಿ
ಇನ್ನು ಅವನು ಹಿಂತಿರುಗನು
ಸ್ವಂತ ನಾಡನ್ನು ಮತ್ತೆ ನೋಡನು !

## ಶಲ್ಲೂಮನಿಗೆ ಧಿಕ್ಕಾರ !

11 ಜುದೇಯದ ಅರಸನಾದ ಯೋಷೀಯನ ಮಗನೂ ತನ್ನ ತಂದೆ ಯೋಷೀಯನ ತರುವಾಯ ಪಟ್ಟಕ್ಕೆ ಬಂದವನೂ ಹಾಗು ಇಲ್ಲಿಂದ ಸೆರೆಯಾಗಿ ಹೋದವನೂ ಆದ ಶಲ್ಲೂಮನ ವಿಷಯವಾಗಿ ಸರ್ವೇಶ್ವರ ಹೇಳುವುದು ಏನೆಂದರೆ: 12"ಅವನು ಇಲ್ಲಿಗೆ ಇನ್ನು ಹಿಂದಿರುಗಿ ಬರುವುದಿಲ್ಲ. ಅವನನ್ನು ಎಲ್ಲಿಗೆ ಸೆರೆ ಒಯ್ದರೋ ಅಲ್ಲೇ ಅವನು ಸಾಯುವನು. ಈ ನಾಡನ್ನು ಇನ್ನು ಅವನು ನೋಡುವುದಿಲ್ಲ."

## ಯೆಹೋಯಾಕೀಮನಿಗೆ ಧಿಕ್ಕಾರ!

13 "ನೆರೆಯವನಿಗೆ ಕೂಲಿಕೊಡದೆ ಬಿಟ್ಟಿಕೆಲಸ
ಮಾಡಿಸಿಕೊಂಡು
ಅರಮನೆಯನ್ನು ಕಟ್ಟಿಸಿಕೊಳ್ಳುವವನಿಗೆ
ಧಿಕ್ಕಾರ!
ಅವನು ಅರಮನೆಯನ್ನು ಕಟ್ಟಿಸಿಕೊಳ್ಳುವುದು
ಅನೀತಿಯಿಂದ
ಮಹಡಿಗಳನ್ನು ನಿರ್ಮಿಸಿಕೊಳ್ಳುವುದು
ಅನ್ಯಾಯದಿಂದ.
14 'ಸವಿಸ್ತಾರವಾದ ಅರಮನೆ
ನಿರ್ಮಿಸಿಕೊಳ್ಳುವೆನು
ವಿಶಾಲವಾದ ಮಹಡಿ ಕಟ್ಟಿಸಿಕೊಳ್ಳುವೆನು'
ಎನ್ನುವವನಿಗೆ ಧಿಕ್ಕಾರ !
ಅವನು ಅಗಲಗಲವಾದ
ಕಿಟಿಕಿಗಳನ್ನಿಡಿಸಿಕೊಳ್ಳುತ್ತಾನೆ
ಅವುಗಳಿಗೆ ಕೆಂಪು ಬಣ್ಣವನ್ನೂ ಬಳಿಸಿ
ಕೊಳ್ಳುತ್ತಾನೆ.
15 ದೇವದಾರಿನ ಕೆಲಸದಲ್ಲಿ,
ಬೇರೆಯವರನ್ನು ಮೀರಿಸುವುದರಲ್ಲಿ
ಅಡಗಿದೆಯೇ ನಿನ್ನ ದೊರೆತನದ ಹಿರಿಮೆ?
ನಿನ್ನ ತಂದೆ ಎಷ್ಟೇ ಕುಡಿದರೂ ತಿಂದರೂ
ನ್ಯಾಯನೀತಿಯನ್ನು ಪಾಲಿಸುತ್ತಿದ್ದನಲ್ಲವೆ?
ಆಗ ಅವನಿಗೆ ಎಲ್ಲವು
ನೆಮ್ಮದಿಯಾಗಿತ್ತಲ್ಲವೆ?
16 ಆತ ದೀನದಲಿತರಿಗೆ ನ್ಯಾಯ ದೊರಕಿಸುತ್ತಿದ್ದ
ಆಗ ಅವನಿಗೆ ಎಲ್ಲವು ಸುಗಮವಾಗಿತ್ತು.
ನನ್ನನ್ನು ಅರಿಯುವುದು ಎಂದರೆ ಇದುವೇ.
ಇದು ಸರ್ವೇಶ್ವರನಾದ ನನ್ನ ನುಡಿ.
17 ಆದರೆ ನಿನ್ನ ದೃಷ್ಟಿ, ನಿನ್ನ ಮನಸ್ಸು ನೆಲೆಗೊಂಡಿವೆ
ದುರ್ಲಾಭದಲ್ಲಿ, ನಿರ್ದೋಷಿಯ
ರಕ್ತಸುರಿಸುವುದರಲ್ಲಿ
ದಬ್ಬಾಳಿಕೆಯಲ್ಲಿ, ಹಿಂಸಾಚಾರಗಳಲ್ಲಿ."
ಜುದೇಯದ ಅರಸನೂ ಆದ ಯೆಹೋಯಾಕೀಮನ
ವಿಷಯವಾಗಿ ಸರ್ವೇಶ್ವರ ಹೀಗೆನ್ನುತ್ತಾರೆ:

“ಇವನಿಗಾಗಿ ಯಾರೂ
‘ಅಯ್ಯೋ ಸೋದರಸೋದರಿಯೇ’
ಎಂದು ಗೋಳಾಡರು
‘ಅಯ್ಯೋ ನಮ್ಮೊಡೆಯಾ, ರಾಜಾಧಿರಾಜ’
ಎಂದು ಪ್ರಲಾಪಿಸರು.
19 ಇವನನ್ನು ಜೆರುಸಲೇಮಿನ ಬಾಗಿಲ ಹೊರಗಡೆ
ಬಿಸಾಡುವರು
ಕತ್ತೆಗೆ ತಕ್ಕ ಮರ್ಯಾದೆಯೊಂದಿಗೆ
ಹೂಣುವರು.”

**ಜೆರುಸಲೇಮ್ ನಗರಿಗೆ ಧಿಕ್ಕಾರ !**

20 “ಲೆಬನೋನ್ ಬೆಟ್ಟವನ್ನು ಹತ್ತಿ
ಬೊಬ್ಬೆಯಿಡು!
ಬಾಷಾನಿನಲ್ಲಿ ಮೊರೆಯಿಡು !
ಅಬಾರೀಮಿನಲ್ಲಿ ಕಿರುಚಾಡು !
ಏಕೆಂದರೆ ನಿನ್ನ ಮಿಂಡರೆಲ್ಲ
ಹಾಳಾಗಿಹೋದರು !
21 ನೀನು ನೆಮ್ಮದಿಯಾಗಿದ್ದ ಕಾಲದಲ್ಲಿ ನಿನ್ನೊಡನೆ
ಮಾತಾಡಿದೆ
ಆದರೆ ನೀನು, “ಕೇಳಲೊಲ್ಲೆ” ಎಂದು
ಹೇಳಿಬಿಟ್ಟೆ.
ನನ್ನ ಮಾತಿಗೆ ಕಿವಿಗೊಡದಿರುವುದು
ನಿನಗೆ ಬಾಲ್ಯದಿಂದಲೆ ವಾಡಿಕೆ !
22 ನಿನ್ನನ್ನು ಅಟ್ಟಿ ಮೇಯಿಸುವ ಕುರುಬರನ್ನು
ಗಾಳಿ ಅಟ್ಟಿಕೊಂಡು ಹೋಗುವುದು.
ನಿನ್ನ ಮಿಂಡರನ್ನು ಸೆರೆಹಿಡಿದುಕೊಂಡು
ಹೋಗುವರು.
ಆಗ ಖಂಡಿತವಾಗಿ ನೀನು ಆಶಾಭಂಗಪಡುವೆ
ನಿನ್ನ ದುಷ್ಕೃತ್ಯಗಳ ನಿಮಿತ್ತ
ಅವಮಾನಕ್ಕೀಡಾಗುವೆ.
23 ‘ಲೆಬನೋನ್’ ಅರಮನೆಯಲ್ಲಿ
ವಾಸಿಸುವವಳೇ,
ದೇವದಾರುಗಳ ನಡುವೆ
ಗೂಡುಮಾಡಿಕೊಂಡಿರುವವಳೇ,
ಪ್ರಸವವೇದನೆಯಂಥ ಸಂಕಟಗಳು
ಸಂಭವಿಸಿದಾಗ
ನಿನಗೊದಗುವ ಪರಿಸ್ಥಿತಿ ಎಷ್ಟೋ ದುಃಖಕರ !

### ಅರಸ ಕೊನ್ಯನಿಗೆ ಧಿಕ್ಕಾರ!

24 ಸರ್ವೇಶ್ವರನ ಮಾತಿದು – “ನನ್ನ ಜೀವದಾಣೆ, ಯೆಹೋಯಾಕೀಮನ ಮಗನೂ ಜುದೇಯದ ಅರಸನೂ ಆದ ಕೊನ್ಯನೇ, ನೀನು ನನ್ನ ಬಲಗೈ ಮುದ್ರಯುಂಗುರವಾಗಿದ್ದರೂ ನಾನು ನಿನ್ನನ್ನು ಅಲ್ಲಿಂದ ಕಿತ್ತು ಹಾಕುತ್ತಿದ್ದೆ.
25ನಿನ್ನ ಪ್ರಾಣ ಹುಡುಕುತ್ತಿರುವವರ ಕೈಗೆ, ನಿನ್ನಲ್ಲಿ ಭಯ ಹುಟ್ಟಿಸುವವರ ಕೈಗೆ, ಅಂದರೆ ಬಾಬಿಲೋನಿನ ಜನರ ಕೈಗೆ ನಿನ್ನನ್ನು ಕೊಟ್ಟುಬಿಡುವೆನು.
26ನಿನ್ನನ್ನೂ ನಿನ್ನ ಹೆತ್ತ ತಾಯಿಯನ್ನೂ ಜನ್ಮಭೂಮಿಯಲ್ಲದ ಅನ್ಯದೇಶಕ್ಕೆ ಎಸೆದುಬಿಡುವೆನು. ನೀವು ಅಲ್ಲೇ ಸಾಯುವಿರಿ.
27ಹಿಂದಿರುಗಬೇಕೆಂದು ಹಂಬಲಿಸಿದರೂ ತಾಯ್ನಾಡಿಗೆ ಹಿಂದಿರುಗುವುದೇ ಇಲ್ಲ.”

28 ಕೊನ್ಯನು ಬಿಸಾಡಲ್ಪಟ್ಟ ಒಡಕು ಕುಡಿಕೆಯೆ?
ಯಾರಿಗೂ ಬೇಡವಾದ ಮಣ್ಣಿನ ಮಡಿಕೆಯೆ?
ಅವನೂ ಅವನ ಮಡದಿಮಕ್ಕಳೇಕೆ
ಬೀದಿಪಾಲಾಗಿದ್ದಾರೆ?
29 ನಾಡೇ, ನಾಡೇ, ಎಲೈ ನಾಡೇ,
ಸರ್ವೇಶ್ವರನ ಮಾತಿಗೆ ಕಿವಿಗೊಡು.
30 ಹೀಗಿದೆ ಸರ್ವೇಶ್ವರನ ನುಡಿ:
“ಇವನು ಮಕ್ಕಳನ್ನು ಕಳೆದುಕೊಂಡ ವ್ಯಕ್ತಿ
ತನ್ನ ಜನ್ಮವನ್ನು ಸಾರ್ಥಕ ಮಾಡಿಕೊಳ್ಳದ
ವ್ಯಕ್ತಿ
ಇವನ ಸಂತಾನದಲ್ಲಿ ಇನ್ನು ಯಾವನೂ
ದಾವೀದನ ಸಿಂಹಾಸನದಲ್ಲಿ ಕೂರನು,
ಜುದೇಯವನ್ನು ಆಳಿ ಬಾಳನು.”

### ಬರಲಿರುವ ಧರ್ಮರಾಜ

**23** “ನನ್ನ ಮಂದೆಯ ಕುರಿಗಳನ್ನು ಚದರಿಸಿ ಹಾಳುಮಾಡುವ ಕುರುಬರಿಗೆ ಧಿಕ್ಕಾರ!” ಇದು ಸರ್ವೇಶ್ವರಸ್ವಾಮಿಯ ನುಡಿ.
2ಇಸ್ರಯೇಲರ ದೇವರಾದ ಸರ್ವೇಶ್ವರ, ತಮ್ಮ ಜನರೆಂಬ ಕುರಿಗಳನ್ನು ಮೇಯಿಸುವ ಕುರಿಗಾಹಿಗಳ ದ್ರೋಹವನ್ನು ಅರಿತಿದ್ದಾರೆ. ಅಂಥವರನ್ನು ಕುರಿತು ಹೀಗೆನ್ನುತ್ತಾರೆ: “ನೀವು ನನ್ನ ಮಂದೆಯನ್ನು ಚದರಿಸಿ ಓಡಿಸಿಬಿಟ್ಟಿದ್ದೀರಿ. ಅವುಗಳ ಬಗ್ಗೆ ಎಚ್ಚರಿಕೆವಹಿಸಲೇ ಇಲ್ಲ. ನಿಮ್ಮ ನೀಚ ಕಾರ್ಯಗಳ ನಿಮಿತ್ತ ನಿಮ್ಮನ್ನು ವಿಚಾರಣೆಗೆ ಗುರಿಪಡಿಸುವೆನು.
3ನನ್ನ ಮಂದೆಯನ್ನು ಯಾವ ಯಾವ ದೇಶಗಳಿಗೆ ಅಟ್ಟಲಾಗಿದೆಯೋ ಆ ಎಲ್ಲ ದೇಶಗಳಿಂದ ಅಳಿದುಳಿದ ಕುರಿಗಳನ್ನು ಒಟ್ಟುಗೂಡಿಸಿ ತಮ್ಮ ತಮ್ಮ ಹಟ್ಟಿಗಳಿಗೆ ಮರಳಿ ಬರಮಾಡುವೆನು. ಅವು ದೊಡ್ಡ ಪೀಳಿಗೆಯಾಗಿ ಬೆಳೆಯುವುವು.
4ನಾನು ಅವುಗಳ ಮೇಲೆ ಕುರಿಗಾಹಿಗಳನ್ನು ನೇಮಿಸುವೆನು. ಅವರು ಅವುಗಳನ್ನು ಪರಿಪಾಲಿಸುವರು. ಅವು ಇನ್ನು ಹೆದರಬೇಕಾಗಿಲ್ಲ, ಬೆದರಬೇಕಾಗಿಲ್ಲ. ಅವುಗಳಲ್ಲಿ ಒಂದೂ ಕಡಿಮೆಯಾಗುವುದಿಲ್ಲ. ಇದು ಸರ್ವೇಶ್ವರನಾದ ನನ್ನ ನುಡಿ.”

5 ಸರ್ವೇಶ್ವರ ಹೇಳುವುದನ್ನು ಗಮನಿಸಿರಿ: “ದಿನಗಳು ಬರಲಿವೆ; ಆಗ ನಾನು ದಾವೀದನೆಂಬ ಮೂಲದಿಂದ ಒಂದು ‘ಮೊಳಕೆ’ಯನ್ನು ಚಿಗುರಿಸುವೆನು. ಆಗ ಸತ್ಪುರುಷ; ರಾಜನಾಗಿ ಆಳುವನು. ವಿವೇಕದಿಂದ ಕಾರ್ಯಸಾಧಿಸುವನು. ಧರೆಯಲ್ಲಿ ನ್ಯಾಯನೀತಿಯನ್ನು ನಿರ್ವಹಿಸುವನು.
6ಆತನ ಕಾಲದಲ್ಲಿ ಯೆಹೂದ್ಯರು ಸುರಕ್ಷಿತರಾಗಿ ಇರುವರು. ಇಸ್ರಯೇಲರು ನೆಮ್ಮದಿಯಿಂದ ಬಾಳುವರು. ‘ಯೆಹೋವ ಚಿದ್ಕೇನು’ (ಎಂದರೆ ಸರ್ವೇಶ್ವರನೇ ನಮ್ಮ ಸದ್ಧರ್ಮ) ಎಂಬ ಹೆಸರು ಆತನಿಗಿರುವುದು.

7 “ಬರಲಿರುವ ಆ ಕಾಲದಲ್ಲಿ ಜನರು, ‘ಇಸ್ರಯೇಲರನ್ನು ಈಜಿಪ್ಟ್ ದೇಶದಿಂದ ಉದ್ಧರಿಸಿದ ಸರ್ವೇಶ್ವರನ ಜೀವದಾಣೆ’ ಎಂದು ಪ್ರಮಾಣ ಮಾಡುವ ಪದ್ಧತಿಯನ್ನು ಬಿಟ್ಟುಬಿಡುವರು.
8ಬದಲಿಗೆ

‘ಇಸ್ರಯೇಲ್ ಮನೆತನವೆಂಬ ಸಂತಾನವನ್ನು ಉತ್ತರನಾಡಿನಿಂದಲೂ ಅವರನ್ನು ತಳ್ಳಲಾಗಿದ್ದ ಸಕಲ ಸೀಮೆಗಳಿಂದಲೂ ಬರಮಾಡಿ ಉದ್ಧರಿಸಿದ ಸರ್ವೇಶ್ವರನ ಜೀವದಾಣೆ’ ಎಂದು ಪ್ರಮಾಣ ಮಾಡುವರು. ಅವರು ಸ್ವಂತ ನಾಡಿನಲ್ಲಿ ಸುಖವಾಗಿ ಬಾಳುವರು. ಇದು ಸರ್ವೇಶ್ವರನಾದ ನನ್ನ ನುಡಿ.”

### ಸುಳ್ಳು ಪ್ರವಾದಿಗಳಿಗೆ ಧಿಕ್ಕಾರ !

9 ಪ್ರವಾದಿಗಳ ವಿಷಯ :
ನನ್ನ ಗುಂಡಿಗೆ ಒಡೆದುಹೋಗಿದೆ
ನನ್ನೆಲುಬುಗಳು ನಡುನಡುಗುತ್ತಿವೆ
ಸರ್ವೇಶ್ವರನಿಗೆ, ಆತನ ಪವಿತ್ರವಾಕ್ಯಕ್ಕೆ
ಪರವಶನಾದ ನಾನು ಅಮಲೇರಿದಂತವನಾದೆ.
ಹೌದು, ಮದ್ಯಪಾನಕ್ಕೆ ಸೋತ
ಮನುಷ್ಯನಂತಾದೆ.
10 ದೈವಶಾಪದ ನಿಮಿತ್ತ ದೇಶ ದುಃಖಿಸುತ್ತಿದೆ
ವ್ಯಭಿಚಾರದಿಂದ ನಾಡು ತುಂಬಿತುಳುಕುತ್ತಿದೆ
ಅಡವಿಯ ಹುಲ್ಲುಗಾವಲು ಬಾಡಿದೆ.
ನಾಡಿನ ಜನರು ಹಿಡಿದೋಡುತ್ತಿರುವ ಮಾರ್ಗ
ದುರ್ಮಾರ್ಗ
ಅನ್ಯಾಯ ಸಾಧನೆಗಾಗಿಯೆ ಅವರ ಅಧಿಕಾರ
ಪ್ರಯೋಗ.
11 “ಪ್ರವಾದಿಗಳು ಭ್ರಷ್ಟರು, ಯಾಜಕರೂ
ಭ್ರಷ್ಟರು !
ನನ್ನಾಲಯದಲ್ಲೆ ಅವರು ನಡೆಸುವ
ಕೆಟ್ಟತನವನ್ನು ನಾನು ಕಂಡಿರುವೆನು.
12 ಕತ್ತಲೊಳು ಜಾರಿಬೀಳುವ ಇಳುಮೇಡು ಅವರ
ಮಾರ್ಗ
ತಳ್ಳಲ್ಪಡುವರು, ಅಂಧಕಾರದೊಳು ಬಿದ್ದು
ಹೋಗುವರು
ಕೇಡನ್ನು ಅವರ ಮೇಲೆ ಬರಮಾಡುವೆನು
ವಿಚಾರಣೆ ವರುಷದ ಕೇಡನ್ನು
ಬರಮಾಡುವೆನು
ಸರ್ವೇಶ್ವರನ ನುಡಿ ಇದು.”
13 “ಸಮಾರ್ಯದ ಪ್ರವಾದಿಗಳ ಅಸಹ್ಯ
ಕಾರ್ಯಗಳನ್ನು ನೋಡಿರುವೆನು
ಬಾಳ್‍ದೇವತೆಯ ಆವೇಶದಿಂದ
ಪ್ರವಾದಿಸಿದರವರು
ಹೀಗೆ ಇಸ್ರಯೇಲೆಂಬ ನನ್ನ ಜನರನ್ನು
ಮಾರ್ಗತಪ್ಪಿಸಿದರು.
14 ಜೆರುಸಲೇಮಿನ ಪ್ರವಾದಿಗಳಲ್ಲೂ
ಭೀಕರವಾದುವನ್ನು ನೋಡಿರುವೆನು
ವ್ಯಭಿಚಾರ ಮಾಡುತ್ತಾರೆ, ಸುಳ್ಳು ಹಾದಿಯನ್ನು

ಹಿಡಿಯುತ್ತಾರೆ
ದುರುಳರು ದುರಾಚಾರವನ್ನು ಬಿಡದಂತೆ
ದೃಢಪಡಿಸುತ್ತಾರೆ.
ನನ್ನ ದೃಷ್ಟಿಗೆ ಅವರೆಲ್ಲರು ಸೊದೋಮಿನಂತೆ,
ಆ ಪುರನಿವಾಸಿಗಳು ನನ್ನ ಕಣ್ಣಿಗೆ
ಗೊಮೋರದಂತೆ."
15 ಆದಕಾರಣ ಸರ್ವಶಕ್ತ ಸರ್ವೇಶ್ವರ
ಪ್ರವಾದಿಗಳ ವಿಷಯದಲ್ಲಿ ಹೇಳುವುದನ್ನು
ಕೇಳಿ:
"ಇವರು ಇಟ್ಟಿಕಾಯನ್ನು ತಿನ್ನುವಂತೆ
ಮಾಡುವೆನು.
ವಿಷಬೆರೆತ ನೀರನ್ನು ಕುಡಿಯುವಂತೆ
ಮಾಡುವೆನು
ಜೆರುಸಲೇಮಿನ ಈ ಪ್ರವಾದಿಗಳಿಂದ
ಭ್ರಷ್ಟತನ ನಾಡಿನಲ್ಲೆಲ್ಲೂ ಹರಡಿರುವುದು."

16 ಸರ್ವಶಕ್ತ ಸರ್ವೇಶ್ವರನ ನುಡಿಯಿದು: "ಪ್ರವಾದಿಗಳು ನಿಮಗೆ ಹೇಳುವ ಮಾತುಗಳನ್ನು ಕೇಳಬೇಡಿ. ಅವರು ನಿಮ್ಮಲ್ಲಿ ವ್ಯರ್ಥವಾದ ನಂಬಿಕೆ ನಿರೀಕ್ಷೆಯನ್ನು ಹುಟ್ಟಿಸುತ್ತಾರಷ್ಟೆ. ಸರ್ವೇಶ್ವರನ ಬಾಯಿಂದ ಹೊರಟದ್ದನ್ನು ನುಡಿಯದೆ ತಮ್ಮ ಸ್ವಂತ ಮನಸ್ಸಿಗೆ ತೋಚಿದ್ದನ್ನೇ ಹೇಳುತ್ತಾರೆ. 17ನನ್ನನ್ನು ಅಸಡ್ಡೆಮಾಡುವವರಿಗೆ, 'ನಿಮಗೆ ಶುಭವಾಗುವುದು ಎಂದು ಸರ್ವೇಶ್ವರನೇ ನುಡಿದಿದ್ದಾರೆ' ಎಂದು ಹೇಳುತ್ತಲೇ ಇದ್ದಾರೆ. ಹಟಮಾರಿ ಹೃದಯಿಗಳೆಲ್ಲರಿಗೆ, 'ನಿಮಗೆ ಯಾವ ಕೇಡೂ ಸಂಭವಿಸದು' ಎಂದು ನುಡಿಯುತ್ತಾರೆ."

18 ಇವರಲ್ಲಿ ಯಾರು ತಾನೆ ಸರ್ವೇಶ್ವರನ ಆಲೋಚನಾ ಸಭೆಯಲ್ಲಿ ಹಾಜರಿದ್ದರು? ಸರ್ವೇಶ್ವರನ ವಾಕ್ಯವನ್ನು ಕೇಳಿ ತಿಳಿದುಕೊಂಡವನಾರು? ಆ ವಾಕ್ಯಕ್ಕೆ ಲಕ್ಷ್ಯಕೊಟ್ಟು ಗ್ರಹಿಸಿಕೊಂಡವನಾರು? 19ಇಗೋ ಕೇಳಿ: ಸರ್ವೇಶ್ವರನ ಕೋಪವೆಂಬ ಬಿರುಗಾಳಿ ಹೊರಟಿದೆ. ಅದು ದುಷ್ಟರ ತಲೆಯ ಮೇಲೆ ಸುಂಟರಗಾಳಿಯಂತೆ ಬಡಿಯುವುದು. 20ಸರ್ವೇಶ್ವರ ತಮ್ಮ ಅಂತರಾಳದ ಸಂಕಲ್ಪಗಳನ್ನು ನಡೆಸಿ ನೆರವೇರಿಸುವ ತನಕ ಅವರ ಆ ಕೋಪವು ಹಿಂದಿರುಗದು. ಕಟ್ಟಕಡೆಯ ದಿನಗಳಲ್ಲಿ ನೀವು ಇದನ್ನು ಸ್ಪಷ್ಟವಾಗಿ ಗ್ರಹಿಸಿಕೊಳ್ಳುವಿರಿ.

21 ಸರ್ವೇಶ್ವರ: "ಈ ಪ್ರವಾದಿಗಳನ್ನು ಕಳುಹಿಸಿದವನು ನಾನಲ್ಲ; ತಾವೇ ಓಡೋಡಿ ಬಂದಿದ್ದಾರೆ. ನಾನು ಇವರಿಗೆ ಏನೂ ಹೇಳಲಿಲ್ಲ; ತಾವೇ ಪ್ರವಾದನೆ ಮಾಡುತ್ತಿದ್ದಾರೆ. 22ಇವರು ನನ್ನ ಆಲೋಚನಾ ಸಭೆಯಲ್ಲಿ ಹಾಜರಿದ್ದಿದ್ದರೆ, ನನ್ನ ವಾಕ್ಯಗಳನ್ನು ನನ್ನ ಜನರ ಕಿವಿಗೆ ಮುಟ್ಟಿಸುತ್ತಿದ್ದರು; ಅವರನ್ನು ದುರ್ಮಾರ್ಗದಿಂದಲೂ ದುಷ್ಕೃತ್ಯಗಳಿಂದಲೂ ತಪ್ಪಿಸುತ್ತಿದ್ದರು.

23"ಹತ್ತಿರದಲ್ಲಿ ಇದ್ದರೆ ಮಾತ್ರ ನಾನು ದೇವರೋ? ದೂರದಲ್ಲಿದ್ದರೆ ನಾನು ದೇವರಲ್ಲವೋ? 24ನನ್ನ ಕಣ್ಣಿಗೆ ಬೀಳದಂತೆ ಯಾವನಾದರು ಗುಪ್ತಸ್ಥಳಗಳಲ್ಲಿ ಮರೆಮಾಚಿಕೊಳ್ಳಲು ಸಾಧ್ಯವೇ? ನಾನು ಭೂಮ್ಯಾಕಾಶಗಳಲ್ಲಿ ವ್ಯಾಪಿಸಿರುವವನಲ್ಲವೆ? 25'ನನಗೆ ಕನಸು ಬಿತ್ತು, ಕನಸುಬಿತ್ತು' ಎಂದು ನನ್ನ ಹೆಸರು ಹೇಳಿ ಸುಳ್ಳು ಪ್ರವಾದನೆ ಮಾಡುವವರ ನುಡಿಯನ್ನು ಕೇಳಿದ್ದೇನೆ. 26ಇವರ ಪೂರ್ವಜರು ಬಾಳ್‍ದೇವತೆಯನ್ನು ಸೇರಿಕೊಂಡು ನನ್ನ ಹೆಸರನ್ನು ಮರೆತುಬಿಟ್ಟರು. ಅದೇ ಪ್ರಕಾರ ಈ ಪ್ರವಾದಿಗಳು ಸ್ವಕಲ್ಪಿತ ಸುಳ್ಳು ಕನಸುಗಳನ್ನು ಒಬ್ಬರಿಗೊಬ್ಬರು ತಿಳಿಸುವುದರ ಮೂಲಕ ನನ್ನ ಜನರು ನನ್ನ ಹೆಸರನ್ನು ಮರೆಯುವಂತೆ ಮಾಡಬೇಕೆಂದು ಆಲೋಚಿಸುತ್ತಿದ್ದಾರೆ. 27ಇಂಥ ಯೋಚನೆ ಈ ಕಳ್ಳ ಪ್ರವಾದಿಗಳ ಮನದಲ್ಲಿ ಎಲ್ಲಿಯವರೆಗೆ ಇರುವುದು? ಕನಸು ಕಂಡ ಪ್ರವಾದಿ ತನ್ನ ಕನಸನ್ನು ಬೇಕಾದರೆ ತಿಳಿಸಲಿ. 28ಆದರೆ ನನ್ನ ವಾಕ್ಯವನ್ನು ಕೇಳಿದವನು ಅದನ್ನು ಯಥಾರ್ಥವಾಗಿ ನುಡಿಯಲಿ. 29ಹೊಟ್ಟನ್ನು ಕಾಳಿನೊಂದಿಗೆ

ಹೋಲಿಸಲಾದೀತೆ? ನನ್ನ ವಾಕ್ಯ ಬೆಂಕಿಗೆ ಸಮಾನ; ಬಂಡೆಯನ್ನು ಪುಡಿಪುಡಿ ಮಾಡುವ ಸುತ್ತಿಗೆಗೆ ಸಮಾನ. ಇದು ಸರ್ವೇಶ್ವರನಾದ ನನ್ನ ನುಡಿ. 30ನನ್ನ ವಾಕ್ಯಗಳನ್ನು ಒಬ್ಬರಿಂದೊಬ್ಬರು ಕದ್ದುಕೊಳ್ಳುವ ಪ್ರವಾದಿಗಳಿಗೆ ನಾನು ವಿರುದ್ಧವಾಗಿ ಇದ್ದೇನೆ. ಇದು ಸರ್ವೇಶ್ವರನಾದ ನನ್ನ ನುಡಿ. 31ತಮ್ಮ ನಾಲಿಗೆಗಳನ್ನು ಆಡಿಸುತ್ತಾ, 'ಇದು ಸರ್ವೇಶ್ವರನ ನುಡಿ' ಎಂದು ಹೇಳುವ ಪ್ರವಾದಿಗಳನ್ನು ನಾನು ಪ್ರತಿಭಟಿಸುತ್ತೇನೆ. ಇದು ಸರ್ವೇಶ್ವರನಾದ ನನ್ನ ನುಡಿ. 32ಸುಳ್ಳು ಕನಸುಗಳನ್ನು ಪ್ರಕಟಿಸುತ್ತಾ ಹಾಗು ವಿವರಿಸುತ್ತಾ ತಮ್ಮ ಅಬದ್ಧ ಮಾತುಗಳಿಂದಲೂ ಕಚ್ಚಾಟದಿಂದಲೂ ನನ್ನ ಜನರಿಗೆ ದಾರಿ ತಪ್ಪಿಸುವ ಪ್ರವಾದಿಗಳನ್ನು ನಾನು ಖಂಡಿಸುತ್ತೇನೆ. ನಾನು ಅವರನ್ನು ಕಳುಹಿಸಲಿಲ್ಲ, ಅಥವಾ ಅವರಿಗೆ ಆಜ್ಞಾಪಿಸಲಿಲ್ಲ. ಅವರಿಂದ ಈ ಜನರಿಗೆ ಯಾವ ಪ್ರಯೋಜನವೂ ಇಲ್ಲ. ಇದು ಸರ್ವೇಶ್ವರನಾದ ನನ್ನ ನುಡಿ."

### ಸರ್ವೇಶ್ವರನ ಹೊರೆ

33 "ಪ್ರವಾದಿಯಾಗಲಿ, ಯಾಜಕನಾಗಲಿ, ಈ ಜನರಲ್ಲಿ ಯಾರೇ ಆಗಲಿ, 'ಸರ್ವೇಶ್ವರ ದಯಪಾಲಿಸಿರುವ ಹೊರೆ ಏನು?' ಎಂದು ನಿನ್ನನ್ನು ಕೇಳಿದರೆ ನೀನು ಅವರಿಗೆ ಹೀಗೆಂದು ಹೇಳು: 'ನೀವೇ ಸರ್ವೇಶ್ವರನ ಹೊರೆ. ನಿಮ್ಮನ್ನು ಅವರು ಎಸೆದುಬಿಡುವರು.' 34"ಸರ್ವೇಶ್ವರನ ಹೊರೆ" ಎಂದು ಒಬ್ಬ ಪ್ರವಾದಿಯಾಗಲಿ, ಯಾಜಕನಾಗಲಿ ಅಥವಾ ಒಬ್ಬ ಜನಸಾಮಾನ್ಯನೇ ಆಗಲಿ, ಹೇಳಿದ್ದೇ ಆದರೆ ನಾನು ಅವನನ್ನೂ ಅವನ ಮನೆಯವರನ್ನೂ ದಂಡಿಸುವೆನು. 35"ಸರ್ವೇಶ್ವರ ಕೊಟ್ಟ ಉತ್ತರವೇನು? ಸರ್ವೇಶ್ವರ ನುಡಿದದ್ದು ಏನು?" ಎಂದು ನಿಮ್ಮ ನಿಮ್ಮ ನೆರೆಹೊರೆಯವರನ್ನು ಮತ್ತು ಅಣ್ಣತಮ್ಮಂದಿರನ್ನು ವಿಚಾರಿಸಬೇಕೇ ಹೊರತು 36'ಸರ್ವೇಶ್ವರನ ಹೊರೆ' ಎಂಬ ಮಾತನ್ನು ಎತ್ತಲೇಕೂಡದು. ಪ್ರತಿಯೊಬ್ಬನ ನುಡಿ ಅವನವನಿಗೊಂದು ಹೊರೆ. ಜೀವಸ್ವರೂಪರಾದ ದೇವರ ನುಡಿಗಳನ್ನು ಹೌದು, ನಮ್ಮ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರನ ನುಡಿಗಳನ್ನು ನೀವು ತಲೆಕೆಳಗಾಗಿಸಿದ್ದೀರಿ. 37"ಸರ್ವೇಶ್ವರನಿಂದ ನಿಮಗೆ ಯಾವ ಉತ್ತರ ದೊರಕಿತು? ಸರ್ವೇಶ್ವರ ಏನು ನುಡಿದಿದ್ದಾರೆ?" ಎಂದು ಪ್ರವಾದಿಯನ್ನು ಕೇಳಿರಿ. 38"ಸರ್ವೇಶ್ವರನ ಹೊರೆ" ಎಂದು ಹೇಳಬೇಡಿ. ಹೇಳಿದರೆ ಸರ್ವೇಶ್ವರ ಇಂತೆನ್ನುತ್ತಾರೆ: "ನಾನು ನಿಮಗೆ 'ಸರ್ವೇಶ್ವರನ ಹೊರೆ' ಎಂಬ ಮಾತನ್ನು ಎತ್ತಲೇ ಕೂಡದೆಂದು, ಹೇಳಿಕಳುಹಿಸಿದರೂ ನೀವು ಎತ್ತಿದ್ದೀರಿ. 39ಈ ಕಾರಣ ನಿಮ್ಮನ್ನು ಮತ್ತು ನಿಮಗೂ ನಿಮ್ಮ ಪೂರ್ವಜರಿಗೂ ನಾನು ಕೊಟ್ಟ ನಗರವನ್ನು ನನ್ನೆದುರಿನಿಂದ ಎತ್ತಿ ಎಸೆದುಬಿಡುವೆನು. 40ನೀವು ನಿಂದೆಗೆ ಗುರಿಯಾಗುವಿರಿ. ಎಂದಿಗೂ ಮರೆಯಲಾಗದ ಶಾಶ್ವತ ಅವಮಾನವನ್ನು ನಿಮಗೆ ಬರ ಮಾಡುವೆನು."

### ಇಬ್ಬಗೆಯ ಹಣ್ಣುಗಳ ದರ್ಶನ

**24** ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ಯಹೋಯಾಕೀಮನ ಮಗ ಹಾಗೂ ಜುದೇಯದ ಅರಸ ಆದ ಯೆಕೊನ್ಯನನ್ನು, ಜುದೇಯದ ಪ್ರಧಾನಿಗಳನ್ನು, ಶಿಲ್ಪಿಗಳನ್ನು ಮತ್ತು ಕಮ್ಮಾರರನ್ನು ಜೆರುಸಲೇಮಿನಿಂದ ಬಾಬಿಲೋನಿಗೆ ಸೆರೆ ಒಯ್ದನು. ಇದಾದ ಬಳಿಕ ಸರ್ವೇಶ್ವರಸ್ವಾಮಿ ತಮ್ಮ ಆಲಯದ ಮುಂದೆ ಇಟ್ಟಿದ್ದ, ಅಂಜೂರದ ಹಣ್ಣು ತುಂಬಿದ್ದ, ಎರಡು ಬುಟ್ಟಿಗಳನ್ನು ನನಗೆ ಕಾಣುವಂತೆ ಮಾಡಿದರು. 2ಒಂದು ಬುಟ್ಟಿಯಲ್ಲಿ ಕಾಲಕ್ಕೆ ಮುಂಚೆ ಮಾಗಿದ್ದ ಹಣ್ಣುಗಳು ತುಂಬಿದ್ದವು. ಅವು ಅತ್ಯುತ್ತಮವಾದ ಅಂಜೂರದ ಹಣ್ಣುಗಳು ತುಂಬಿದ್ದವು. 3ಆಗ ಸರ್ವೇಶ್ವರ ನನ್ನನ್ನು, "ಯೆರೆಮೀಯನೇ, ನಿನಗೆ ಕಾಣುತ್ತಿರುವುದು ಏನು?" ಎಂದು ಕೇಳಿದರು. ನಾನು, "ಅಂಜೂರದ ಹಣ್ಣುಗಳನ್ನು ನೋಡುತ್ತಿದ್ದೇನೆ. ಒಳ್ಳೆಯ ಹಣ್ಣುಗಳು ಅತ್ಯುತ್ತಮವಾಗಿವೆ. ಕೆಟ್ಟ ಹಣ್ಣುಗಳು ಬಹಳ ಕೆಟ್ಟಿವೆ. ಯಾರೂ ತಿನ್ನಲಾಗದಷ್ಟು ಅಸಹ್ಯವಾಗಿವೆ," ಎಂದು ಉತ್ತರಕೊಟ್ಟೆ.

4 ಆಗ ಸರ್ವೇಶ್ವರ ನನಗೆ ದಯಪಾಲಿಸಿದ ಸಂದೇಶ ಇದು: 5"ಇಸ್ರಯೇಲರ ದೇವರಾದ ಸರ್ವೇಶ್ವರ ಹೇಳುವುದನ್ನು ಕೇಳು – ನಾನು ಈ ಸ್ಥಳದಿಂದ ಬಾಬಿಲೋನಿಗೆ ಕಳಿಸಿಬಿಟ್ಟು ಅಲ್ಲಿ ಸೆರೆಯಾಳುಗಳಾಗಿರುವ ಯೆಹೂದ್ಯರು ಈ ಉತ್ತಮವಾದ ಅಂಜೂರದ ಹಣ್ಣುಗಳಂಥವರು. ಅವರನ್ನು

ಆದರದಿಂದ ನೋಡಿ ಅವರಿಗೆ ಒಳ್ಳೆಯದನ್ನೇ ಮಾಡುವೆನು. 6ಅವರ ಮೇಲೆ ಕನಿಕರ ತೋರಿ ಕಟಾಕ್ಷಿಸಿ ಈ
ನಾಡಿಗೆ ಮರಳಿ ಬರಮಾಡುವೆನು. ಅವರನ್ನು ಕಟ್ಟುವೆನು, ಕೆಡುವುದಿಲ್ಲ; ನೆಡುವೆನು, ಕೀಳುವುದಿಲ್ಲ. 7ನಾನೇ
ಸರ್ವೇಶ್ವರ ಎಂದು ಒಪ್ಪಿಕೊಳ್ಳುವ ಹೃದಯವನ್ನು ಅವರಿಗೆ ಅನುಗ್ರಹಿಸುವೆನು. ಅವರು ನನ್ನ
ಜನರಾಗಿರುವರು, ನಾನು ಅವರ ದೇವರಾಗಿರುವೆನು. ಅವರು ನನ್ನತ್ತ ಮನಪೂರ್ವಕವಾಗಿ ಹಿಂದಿರುಗಿ
ಬರುವರು.

8 "ಇದಲ್ಲದೆ ಸರ್ವೇಶ್ವರನಾದ ನಾನು ಹೇಳುವುದು ಇದು: ಜುದೇಐದ ಅರಸ ಚಿದ್ಕೀಯನು, ಅವನ
ಪ್ರಧಾನಿಗಳು, ಜೆರುಸಲೇಮಿನ ಜನರು ಶೇಷವಾಗಿ ಈ ನಾಡಿನಲ್ಲೆ ಉಳಿದವರು ಮತ್ತು ಈಜಿಪ್ಟ್ ದೇಶಕ್ಕೆ
ವಲಸೆ ಹೋದವರು – ಇವರೆಲ್ಲರು ಕೆಟ್ಟು ಯಾರೂ ತಿನ್ನಲಾಗದಷ್ಟು ಅಸಹ್ಯವಾದ ಅಂಜೂರದ
ಹಣ್ಣುಗಳಂಥವರು. ಅವರನ್ನು ಅಂಥ ಗತಿಗೆ ಇಳಿಸುವೆನು. 9ಅವರ ಕೇಡಿಗಾಗಿ ನಾನು ಅವರನ್ನು ಜಗದ
ಎಲ್ಲ ರಾಜ್ಯಗಳಿಗೆ ಭಯಾಸ್ಪದವಾಗುವಂತೆ ಮಾಡುವೆನು. ಅವರನ್ನು ಅಟ್ಟಲಾಗುವ ಸ್ಥಳಗಳಲ್ಲೆಲ್ಲ ಅವರು
ಕಟ್ಟುಗಾದೆಗೆ, ನಿಂದೆ ಪರಿಹಾಸ್ಯಕ್ಕೆ, ಶಾಪತಾಪಕ್ಕೆ ಗುರಿಯಾಗುವರು. 10ಅವರಿಗೂ ಅವರ ಪೂರ್ವಜರಿಗೂ
ನಾನು ಅನುಗ್ರಹಿಸಿದ ನಾಡಿನಿಂದ ಅವರು ನಿರ್ಮೂಲರಾಗುವ ತನಕ ಖಡ್ಗ, ಕ್ಷಾಮ, ವ್ಯಾಧಿಗಳನ್ನು ಅವರ
ಮೇಲೆ ಕಳುಹಿಸುವೆನು."

## ಬಾಬಿಲೋನ್ – ಸರ್ವೇಶ್ವರನ ಕೈಚಾಟಿ

**25** ಯೋಷೀಯನ ಮಗನೂ ಜುದೇಯದ ಅರಸನೂ ಆದ ಯೆಹೋಯಾಕೀಮನ ಆಳ್ವಿಕೆಯ
ಮೊದಲನೇ ವರ್ಷದಲ್ಲಿ, ಅಂದರೆ ಬಾಬಿಲೋನಿನ ಅರಸನಾದ ನೆಬೂಕದ್ನೆಚ್ಚರನ ಆಳ್ವಿಕೆಯ ಮೊದಲನೇ
ವರ್ಷದಲ್ಲಿ, ಪ್ರವಾದಿ ಯೆರೆಮೀಯನಿಗೆ ಯೆಹೂದ್ಯರೆಲ್ಲರ ವಿಷಯವಾಗಿ ದೈವೋಕ್ತಿಯೊಂದು
ಉಂಟಾಯಿತು. 2ಅದನ್ನು ಯೆರೆಮೀಯನು ಯೆಹೂದ್ಯರೆಲ್ಲರಿಗೂ ಸಮಸ್ತ ಜೆರುಸಲೇಮಿನವರಿಗೂ
ಸಾರಿದನು: 3"ಆಮೋನನ ಮಗನೂ ಜುದೇಯದ ಅರಸನೂ ಆದ ಯೋಷೀಯನ ಆಳ್ವಿಕೆಯ
ಹದಿಮೂರನೇ ವರ್ಷದಿಂದ ಈ ದಿನದವರೆಗೆ, ಅಂದರೆ ಕಳೆದ ಇಪ್ಪತ್ತು ಮೂರು ವರ್ಷಗಳಿಂದ
ಸರ್ವೇಶ್ವರಸ್ವಾಮಿ ತಮ್ಮ ವಾಕ್ಯವನ್ನು ನನಗೆ ತಿಳಿಸಿದ್ದಾರೆ. ಅದನ್ನು ನಾನು ನಿಮಗೆ ತಡಮಾಡದೆ ಪ್ರಕಟಿಸುತ್ತಾ
ಬಂದಿದ್ದೇನೆ. ಆದರೆ ನೀವು ಅದಕ್ಕೆ ಕಿವಿಗೊಡಲಿಲ್ಲ. 4ಸರ್ವೇಶ್ವರ ತಮ್ಮ ದಾಸರಾದ ಪ್ರವಾದಿಗಳನ್ನೆಲ್ಲಾ ನಿಮ್ಮ
ಬಳಿಗೆ ನಿರಂತರವಾಗಿ ಕಳಿಸುತ್ತಿದ್ದರು. ಆದರೂ ನೀವು ಗಮನಿಸಲಿಲ್ಲ; ಕಿವಿಗೊಡಲೂ ಇಲ್ಲ. 5ಅವರು ತಂದ
ಸಮಾಚಾರ ಇದು: 'ನೀವೆಲ್ಲರು ನಿಮ್ಮ ನಿಮ್ಮ ದುರ್ಮಾರ್ಗದಿಂದಲೂ ದುಷ್ಕೃತ್ಯಗಳಿಂದಲೂ
ಹಿಂದಿರುಗಬೇಕು. ಆಗ, ಸರ್ವೇಶ್ವರ ನಿಮಗೂ ನಿಮ್ಮ ಪೂರ್ವಜರಿಗೂ ಶಾಶ್ವತ ಸೊತ್ತಾಗಿ ಅನುಗ್ರಹಿಸಿದ
ನಾಡಿನಲ್ಲಿ ನೀವು ನೆಲೆಗೊಳ್ಳುವಿರಿ. 6ಬೇರೆ ದೇವರುಗಳನ್ನು ಹಿಂಬಾಲಿಸಿ, ಅವರನ್ನು ಸೇವಿಸಿ ಪೂಜಿಸಬೇಡಿ.
ನಿಮ್ಮ ಕೈ ಕೃತಿಗಳಾದ ವಿಗ್ರಹಗಳನ್ನು ಆರಾಧಿಸಿ, ನನ್ನನ್ನು ರೇಗಿಸಬೇಡಿ. ಆಗ ನಾನು ನಿಮಗೆ ಯಾವ
ಕೇಡನ್ನೂ ಮಾಡೆನು.' 7ಆದರೆ ಸರ್ವೇಶ್ವರಸ್ವಾಮಿಯೇ ಹೇಳುವಂತೆ ನೀವು ಅವರಿಗೆ ಕಿವಿಗೊಡದೆ ನಿಮ್ಮ
ಕೈಕೃತಿಗಳಾದ ವಿಗ್ರಹಗಳಿಂದ ಅವರನ್ನು ಕೆಣಕಿ ನಿಮಗೇ ಕೇಡನ್ನು ತಂದುಕೊಂಡಿದ್ದೀರಿ.

8 "ಆದುದರಿಂದ ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯ ಈ ನುಡಿಯನ್ನು ಕೇಳಿರಿ: 9"ನೀವು ನನ್ನ
ಮಾತನ್ನು ಕೇಳದ ಕಾರಣ ನಾನು ಉತ್ತರ ಭಾಗದ ರಾಷ್ಟ್ರಗಳನ್ನೆಲ್ಲ ಕರೆಯಿಸುವೆನು. ಬಾಬಿಲೋನಿನ ಅರಸ
ಹಾಗು ನನ್ನ ಸೇವಕನಾದ ನೆಬೂಕದ್ನೆಚ್ಚರನನ್ನೂ ಬರಮಾಡುವೆನು. ಅವರು ಈ ನಾಡಿನ, ಇದರ ನಿವಾಸಿಗಳ,
ಮತ್ತು ಸುತ್ತ ಮುತ್ತಲಿನ ನಾಡುಗಳ ಮೇಲೂ ಬೀಳುವರು. ಹೀಗೆ ಇವುಗಳನ್ನು ತೀರ ಹಾಳುಮಾಡುವೆನು.
ನಿರಂತರ ಪರಿಹಾಸ್ಯಕ್ಕೂ ಪರಿವಿನಾಶಕ್ಕೂ ಇವನ್ನು ಗುರಿಪಡಿಸುವೆನು. 10ಇವುಗಳಲ್ಲಿ ಸಂಭ್ರಮ ಸಡಗರಗಳ
ಧ್ವನಿಯಾಗಲಿ, ವಧುವರರ ಸ್ವರವಾಗಲಿ ಏಳದಂತೆ ಮಾಡುವೆನು. ಬೀಸುಕಲ್ಲಿನ ಸದ್ದನ್ನು ಅಡಗಿಸುವೆನು.
ದೀಪಕ್ಕೆ ಎಣ್ಣೆ ಇಲ್ಲದಂತೆ ಮಾಡುವೆನು. 11ಈ ನಾಡೆಲ್ಲ ಹಾಳಾಗಿ ಇದನ್ನು ನೋಡುವವರು ನಿಬ್ಬೆರಗಾಗುವರು.
ಇದರ ಜನರು ಎಪ್ಪತ್ತು ವರ್ಷ ಕಾಲ ಬಾಬಿಲೋನಿನ ಅರಸನಿಗೆ ಗುಲಾಮರಾಗಿ ಇರುವರು. 12ಆ ಅವಧಿಯ
ತರುವಾಯ ನಾನು ಬಾಬಿಲೋನನ್ನೂ ಅದರ ಅರಸನನ್ನೂ ದಂಡಿಸುವೆನು. ಅದರ ದ್ರೋಹದ ನಿಮಿತ್ತ ಆ

ಬಾಬಿಲೋನಿನ ನಾಡನ್ನು ನಿತ್ಯ ವಿನಾಶಕ್ಕೆ ಗುರಿಪಡಿಸುವೆನು. ಇದು ಸರ್ವೇಶ್ವರನಾದ ನನ್ನ ನುಡಿ. 13ನಾನು
ಈ ನಾಡಿನ ವಿಷಯದಲ್ಲಿ ನುಡಿದುದೆಲ್ಲವನ್ನು, ಅಂದರೆ ಯೆರೆಮೀಯನ ಮುಖಾಂತರ ಸಕಲ ರಾಷ್ಟ್ರಗಳ
ವಿರುದ್ಧ ನುಡಿದಿರುವ ಹಾಗು ಪ್ರವಾದನೆಗಳ ಗ್ರಂಥದಲ್ಲಿ ಬರೆದುದೆಲ್ಲವನ್ನು ಅದರ ಮೇಲೆ ಬರಮಾಡುವೆನು.
14ಅನೇಕ ರಾಷ್ಟ್ರಗಳೂ ಮಹಾರಾಜರೂ ಅವರನ್ನು ಗುಲಾಮರನ್ನಾಗಿಸಿಕೊಳ್ಳುವರು. ಅವರ ಕೃತ್ಯಗಳಿಗೂ
ಕೈಕೆಲಸಗಳಿಗೂ ತಕ್ಕಂತೆ ಅವರಿಗೆ ಮುಯ್ಯಿ ತೀರಿಸುವೆನು."

**ಕೋಪ ತುಂಬಿದ ಕೊಡ**

15 ಇಸ್ರಯೇಲರ ದೇವರಾದ ಸರ್ವೇಶ್ವರಸ್ವಾಮಿ ನನಗೆ ಹೀಗೆಂದರು: "ಕೋಪವೆಂಬ ಮದ್ಯದಿಂದ
ತುಂಬಿರುವ ಈ ಪಾತ್ರೆಯನ್ನು ನೀನು ನನ್ನ ಕೈಯಿಂದ ತೆಗೆದುಕೊ. ಯಾವ ರಾಷ್ಟ್ರಗಳ ಬಳಿಗೆ ನಿನ್ನನ್ನು
ಕಳಿಸುತ್ತೇನೋ ಆ ರಾಷ್ಟ್ರಗಳೆಲ್ಲ ಈ ಪಾತ್ರೆಯಿಂದ ಕುಡಿಯುವಂತೆ ಮಾಡು. 16ಅವರು ಅದನ್ನು ಕುಡಿದು
ಓಲಾಡುವರು, ನಾನು ಕಳಿಸುವ ಖಡ್ಗದಿಂದ ಹುಚ್ಚುಚ್ಚಾಗುವರು." 17ನಾನು ಸರ್ವೇಶ್ವರನ ಕೈಯಿಂದ ಆ
ಪಾತ್ರೆಯನ್ನು ತೆಗೆದುಕೊಂಡೆ. ಸರ್ವೇಶ್ವರ ಯಾವ ರಾಷ್ಟ್ರಗಳ ಬಳಿಗೆ ನನ್ನನ್ನು ಕಳಿಸಿದರೋ, ಆ ಎಲ್ಲ
ರಾಷ್ಟ್ರಗಳು ಅದರಿಂದ ಕುಡಿಯುವಂತೆ ಮಾಡಿದೆ. 18ಜೆರುಸಲೇಮಿಗೂ ಜುದೇಯದ ನಗರಗಳಿಗೂ,
ಅರಸರುಗಳಿಗೂ ಕುಡಿಸಿದೆ. ಇದರಿಂದ ಅವರು ಹಾಳಾಗಿ ಇಂದು ಪರಿಹಾಸ್ಯಕ್ಕೂ ಶಾಪಕ್ಕೂ
ಗುರಿಯಾಗುವಂತಾಯಿತು.

19 ಆ ಕೊಡದಿಂದ ಕುಡಿದ ಮತ್ತಿತರರು ಇವರು:
ಈಜಿಪ್ಟಿನ ಅರಸ ಫರೋಹನು ಅವನ
ಸೇವಕರು,
ಮಂತ್ರಿಗಳು, ಎಲ್ಲ ಪ್ರಜೆಗಳು ಮತ್ತು ಅಲ್ಲಿನ
ವಿದೇಶೀಯರು;
20 ಊಚ್ ನಾಡಿನ ಎಲ್ಲ ಅರಸರು, ಫಿಲಿಷ್ಟಿಯ
ದೇಶದ ಎಲ್ಲ ಅರಸರು,
ಅಷ್ಕೆಲೋನ್, ಗಾಜಾ, ಎಕ್ರೋನ್,
ಅಷ್ಟೋದಿನ ಶೇಷ, ಈ ಪ್ರಾಂತ್ಯಗಳ ಎಲ್ಲ
ಅರಸರು;
21 ಎದೋಮ್, ಮೋವಾಬ್, ಅಮ್ಮೋನ್
ಜನರೆಲ್ಲರು;
22 ಟೈರ್ ಮತ್ತು ಸಿದೋನ್ ಇವುಗಳ
ಅರಸರೆಲ್ಲರು;
23 ಸಮುದ್ರದ ಆಚೆನ ಕರಾವಳಿಯ ಅರಸರು,
ದೆದಾನ್ಯರು, ತೇಮಾ, ಬೂಜ್ ನಾಡಿನವರು,
ಮುಂದಲೆಗೂದಲು
ಕತ್ತರಿಸಿಕೊಳ್ಳುವವರೆಲ್ಲರು;
24 ಅರಬೀಯದ ಎಲ್ಲ ಅರಸರು,
ಅರಣ್ಯವಾಸಿಗಳಾದ ಮಿಶ್ರ ಜಾತಿಯ ಎಲ್ಲ
ನಾಯಕರು;
25 ಏಲಾಮಿನ ಎಲ್ಲ ಅರಸರು, ಮೇದ್ಯರ ಎಲ್ಲ
ಅರಸರು;
26 ದೂರ – ಹತ್ತಿರವಿರುವ ಉತ್ತರ ನಾಡಿನ
ಎಲ್ಲ ಅರಸರು, ಲೋಕದ ಸಕಲ ರಾಜ್ಯಗಳು.

ಇವರೆಲ್ಲರು ಕುಡಿದ ಮೇಲೆ
ಬಾಬಿಲೋನಿನ ಅರಸನು ಕುಡಿಯುವನು.

27 ಸರ್ವೇಶ್ವರಾ: "ನೀನು ಅವರಿಗೆ ಹೀಗೆಂದು ಹೇಳು: 'ಇಸ್ರಯೇಲಿನ ದೇವರೂ ಸರ್ವಶಕ್ತರೂ ಆದ ಸರ್ವೇಶ್ವರ ಹೇಳಿದ್ದಾರೆ – ನೀವು ಕುಡಿಯಬೇಕು, ಕುಡಿದು ಕಕ್ಕಬೇಕು. ನಾನು ಕಳಿಸುವ ಖಡ್ಗಕ್ಕೆ ತುತ್ತಾಗಿ ಬೀಳಬೇಕು, ಬಿದ್ದು ಏಳಬಾರದು.' 28ಒಂದು ವೇಳೆ ಅವರು ಆ ಪಾತ್ರೆಯನ್ನು ನಿನ್ನ ಕೈಯಿಂದ ತೆಗೆದುಕೊಳ್ಳಲಿಕ್ಕೂ ಕುಡಿಯಲಿಕ್ಕೂ ಒಪ್ಪದಿದ್ದರೆ ಅವರಿಗೆ ಹೀಗೆಂದು ಹೇಳು – 'ಸರ್ವಶಕ್ತ ಸರ್ವೇಶ್ವರನ ನುಡಿ ಇವು: ನೀವು ಕುಡಿಯಲೇಬೇಕು; 29ಇಗೋ, ನನ್ನ ಹೆಸರುಗೊಂಡಿರುವ ನಗರದಲ್ಲಿ ಬಾಧಿಸಲು ಪ್ರಾರಂಭಿಸುತ್ತೇನೆ. ನೀವು ಆ ದಂಡನೆಗೆ ತಪ್ಪಿಸಿಕೊಳ್ಳುವಿರೊ? ಆಗುವುದೇ ಇಲ್ಲ. ಏಕೆಂದರೆ ಭೂನಿವಾಸಿಗಳೆಲ್ಲರಿಗೆ ವಿರದ್ಧವಾಗಿ ಖಡ್ಗವನ್ನು ಬರಮಾಡುವೆನು. ಇದು ಸರ್ವಶಕ್ತ ಸರ್ವೇಶ್ವರನ ನುಡಿ.'

30 "(ಯೆರೆಮೀಯನೇ), ನೀನು ಪ್ರವಾದಿ
ಸುತ್ತಾ ಅವರಿಗೆ ಈ ಮಾತುಗಳನ್ನು ಹೇಳು:
'ಸರ್ವೇಶ್ವರ ಗರ್ಜಿಸುವನು ಮೇಲಣ
ಲೋಕದಿಂದ
ದನಿಗೈವನು ತನ್ನ ಘನ ನಿವಾಸದಿಂದ
ಗಟ್ಟಿಯಾಗಿ ಕೂಗುವನು ತನ್ನ ಹುಲ್ಲುಗಾವಲಿನ
ಮಂದೆಯ ವಿರುದ್ಧ
ಕೂಗಾಡುವನು ದ್ರಾಕ್ಷೆಯ ಹಣ್ಣನ್ನು
ತುಳಿಯುವವರಂತೆ
ಭೂನಿವಾಸಿಗಳೆಲ್ಲರು ಭಯಭ್ರಾಂತ
ರಾಗುವಂತೆ.
31 ಆತನ ಶಬ್ದ ವ್ಯಾಪಿಸುವುದು ಭೂಮಿಯ
ಕಟ್ಟಕಡೆಗೆ
ಸರ್ವೇಶ್ವರನೆ ಆಪಾದನೆ ಹೊರಿಸುವನು
ಜನಾಂಗಗಳ ಮೇಲೆ
ನರಮಾನವರನ್ನೆಲ್ಲ ಗುರಿಮಾಡುವನು ತೀರ್ಪಿಗೆ
ದುರುಳರನ್ನು ತುತ್ತಾಗಿಸುವನು ಕತ್ತಿಗೆ
– ಇದು ಸರ್ವೇಶ್ವರನ ನುಡಿ'."
32 ಸೇನಾಧೀಶ್ವರ ಸರ್ವೇಶ್ವರ ಹೀಗೆನ್ನುತ್ತಾರೆ:
'ಹರಡುವುದು ಕೇಡು ಜನಾಂಗದಿಂದ
ಜನಾಂಗಕ್ಕೆ
ಏಳುವುದು ಚಂಡಮಾರುತ ಲೋಕದ
ಕಟ್ಟಕಡೆಯಿಂದ'."

33 ಆ ದಿನದಲ್ಲಿ ಸರ್ವೇಶ್ವರನಿಂದ ಹತರಾದವರು ಲೋಕದ ಒಂದು ಕಡೆಯಿಂದ ಇನ್ನೊಂದು ಕಡೆಯವರೆಗೆ ಬಿದ್ದಿರುವರು. ಅವರಿಗಾಗಿ ಯಾರೂ ಗೋಳಾಡರು, ಅವರನ್ನು ಯಾರೂ ಒಟ್ಟುಗೂಡಿಸರು, ಯಾರೂ ಹೂಣರು. ಭೂಮಿಯ ಮೇಲೆ ಗೊಬ್ಬರವಾಗಿ ಬಿದ್ದಿರುವರು.
34 'ಕುರಿಗಾಹಿಗಳೇ, ಅರಚಿಗೋಳಾಡಿ
ಮೇಷಪಾಲರೇ, ಬೂದಿಯಲ್ಲಿ ಬಿದ್ದು
ಹೊರಳಾಡಿ.
ನಿಮ್ಮನ್ನು ವಧಿಸುವ ಕಾಲ ಬಂದಿದೆ
ನಾನು ನಿಮ್ಮನ್ನು ಭಂಗಪಡಿಸುವೆ.

ನೀವು ಚೂರುಚೂರಾಗುವಿರಿ
ಒಡೆದು ಹೋದ ಅಂದವಾದ ಪಾತ್ರೆಯಂತೆ.
35 ಕುರಿಗಾಹಿಗಳು ಓಡಿಹೋಗುವುದಕ್ಕೆ ದಾರಿ
ಸಿಕ್ಕದು
ಮೇಷಪಾಲರು ತಲೆತಪ್ಪಿಸಿಕೊಳ್ಳಲಿಕ್ಕೆ ಆಸ್ಪದ
ದೊರಕದು.
36 ಅಕಟಕಟಾ, ಕುರಿಗಾಹಿಗಳ ಕೂಗಾಟ
ಮೇಷಪಾಲರ ಕಿರುಚಾಟ
ಸರ್ವೇಶ್ವರನಿಂದಲೆ ಆ ಹುಲ್ಲುಗಾವಲಿನ
ವಿನಾಶ !
37 ಆತನ ಕೋಪಾಗ್ನಿಯ ನಿಮಿತ್ತ
ಹಾಯಾದ ಗೋಮಾಳಗಳ ಧ್ವಂಸ !
38 ಗುಹೆಬಿಟ್ಟು ಬಂದ ಸಿಂಹದಂತೆ
ಬಂದಿರುವನಾತ.
ಆತನ ಕೋಪಾಗ್ನಿಯ ನಿಮಿತ್ತ
ತುಂಡರಿಸುವಾ ಖಡ್ಗದ ಪ್ರಯುಕ್ತ
ಅವರ ನಾಡಾಗಿದೆ ಬೆಂಗಾಡು.

### ಯೆರೆಮೀಯನಿಗೆ ಮರಣದಂಡನೆಯ ಬೆದರಿಕೆ

**26** ಯೋಷೀಯನ ಮಗನೂ ಜುದೇಯದ ಅರಸನೂ ಆದ ಯೆಹೋಯಾಕೀಮನ ಆಳ್ವಿಕೆಯ
ಆರಂಭದಲ್ಲಿ ಯೆರೆಮೀಯನಿಗೆ ಸರ್ವೇಶ್ವರಸ್ವಾಮಿಯಿಂದ ಈ ಅಪ್ಪಣೆ ಆಯಿತು: 2"ನೀನು ನನ್ನ
ದೇವಾಲಯದ ಪ್ರಾಕಾರದಲ್ಲಿ ನಿಂತು, ಆ ಮಂದಿರದಲ್ಲಿ ಆರಾಧಿಸುವುದಕ್ಕೆ ಬರುವ ಜುದೇಯದ ಎಲ್ಲ
ಊರಿನವರಿಗೆ ನಾನು ಆಜ್ಞಾಪಿಸುವ ಮಾತುಗಳನ್ನೆಲ್ಲಾ ಹೇಳು, ಒಂದನ್ನೂ ಬಿಡಬೇಡ. 3ಬಹುಶಃ ಅವರು
ಕಿವಿಗೊಟ್ಟು ತಮ್ಮ ತಮ್ಮ ದುರ್ಮಾರ್ಗಗಳಿಂದ ಹಿಂದಿರುಗಬಹುದು. ಹಾಗೆ ಮಾಡಿದ್ದೇ ಆದರೆ, ಅವರ
ದುಷ್ಕೃತ್ಯಗಳಿಗೆ ದಂಡನೆಯನ್ನು ವಿಧಿಸಬೇಕೆಂದಿದ್ದ ನನ್ನ ಮನಸ್ಸನ್ನು ಬದಲಾಯಿಸಿಕೊಳ್ಳುವೆನು.

4 "ಅವರಿಗೆ ನೀನು ಹೇಳಬೇಕಾದುದು ಇದು: 'ಸರ್ವೇಶ್ವರ ಹೀಗೆನ್ನುತ್ತಾರೆ – ನೀವು ನನಗೆ
ಕಿವಿಗೊಡದೆ ಹೋದರೆ, ನಾನು ನಿಮ್ಮ ಮುಂದಿಟ್ಟಿರುವ ಧರ್ಮಶಾಸ್ತ್ರದ ಪ್ರಕಾರ ನಡೆಯದೆ ಹೋದರೆ,
5ಹಾಗು ನೀವು ಕೇಳದಿದ್ದರೂ ನಿಮ್ಮ ಬಳಿಗೆ ನಾನು ಪದೇಪದೇ ಕಳಿಸುತ್ತಾ ಬಂದಿರುವ ನನ್ನ ದಾಸರಾದ
ಪ್ರವಾದಿಗಳ ಮಾತುಗಳನ್ನೂ ಆಲಿಸದೆ ಹೋದರೆ, 6ಆಗ ನಾನು ಈ ಆಲಯವನ್ನು ಶಿಲೋವಿನ ಗತಿಗೆ
ಇಳಿಸುವೆನು. ಈ ನಗರವು ವಿಶ್ವದ ಜನರಿಗೆಲ್ಲ ಶಾಪಗ್ರಸ್ತ ನಗರವಾಗುವಂತೆ ಮಾಡುವೆನು."

7 ಯೆರೆಮೀಯನು ಸರ್ವೇಶ್ವರನ ಆಲಯದಲ್ಲಿ ಹೀಗೆ ಸಾರುವುದನ್ನು ಯಾಜಕರೂ ಪ್ರವಾದಿಗಳೂ
ಜನರೆಲ್ಲರೂ ಕೇಳಿದರು. 8ಜನರಿಗೆ ತಿಳಿಸಬೇಕೆಂದು ಸರ್ವೇಶ್ವರ ಆಜ್ಞಾಪಿಸಿದ್ದನ್ನೆಲ್ಲ ಯೆರೆಮೀಯನು ನುಡಿದು
ಮುಗಿಸಿದ ಮೇಲೆ ಯಾಜಕರೂ ಪ್ರವಾದಿಗಳೂ ಜನರೆಲ್ಲರೂ ಅವನನ್ನು ಸುತ್ತುಗಟ್ಟಿದರು. 9"ನಿನಗೆ
ಖಂಡಿತವಾಗಿ ಮರಣ ದಂಡನೆಯಾಗಬೇಕು. ನೀನು 'ಈ ದೇವಾಲಯಕ್ಕೆ ಶಿಲೋವಿನ ಗತಿ ಬರುವುದು,
ಈ ನಗರ ಪಾಳುಬಿದ್ದು ನಿರ್ಜನ ಪ್ರದೇಶವಾಗುವುದು,' ಎಂದು ಸರ್ವೇಶ್ವರನ ಹೆಸರೆತ್ತಿ ಪ್ರವಾದನೆ
ಮಾಡಿದ್ದೇಕೆ?" ಎಂದು ಕೂಗಾಡಿದರು. ಆಲಯದಲ್ಲಿದ್ದ ಯೆರೆಮೀಯನನ್ನು ಜನರ ಗುಂಪು
ಮುತ್ತಿಕೊಂಡಿತು.

10 ಜುದೇಯದ ನಾಯಕರಿಗೂ ಈ ಸಮಾಚಾರ ಮುಟ್ಟಿತು. ಅವರು ಅರಮನೆಯಿಂದ
ಧಾವಿಸಿಬಂದು ಸರ್ವೇಶ್ವರನಾಲಯದ ಹೊಸ ಬಾಗಿಲ ಬಳಿ ಆಸೀನರಾದರು. 11ಯಾಜಕರೂ

ಪ್ರವಾದಿಗಳೂ, "ಇವನು ಮರಣದಂಡನೆಗೆ ಪಾತ್ರನು; ನಗರಕ್ಕೆ ಅಹಿತವಾದುದನ್ನು ನುಡಿದಿದ್ದಾನೆ. ಇದನ್ನು ನೀವೇ ಕೇಳಿದ್ದೀರಿ," ಎಂದು ನಾಯಕರಿಗೂ ಜನರೆಲ್ಲರಿಗೂ ದೂರು ಇತ್ತರು.

12 ಆಗ ಯೆರೆಮೀಯನು, "ನೀವು ಕೇಳಿದ ಮಾತುಗಳನ್ನೆಲ್ಲ, ಅಂದರೆ ಈ ದೇವಾಲಯಕ್ಕೂ ನಗರಕ್ಕೂ ವಿರುದ್ಧವಾದ ಮಾತುಗಳನ್ನು ನುಡಿಯಲು ನನ್ನನ್ನು ಕಳಿಸಿದವರು ಸರ್ವೇಶ್ವರನೇ. 13ಇದೀಗಲೇ ನೀವು ನಿಮ್ಮ ಮಾರ್ಗಗಳನ್ನೂ ನಡತೆಗಳನ್ನೂ ತಿದ್ದುಕೊಳ್ಳಿ. ನಿಮ್ಮ ದೇವರಾದ ಸರ್ವೇಶ್ವರನ ನುಡಿಗೆ ಕಿವಿಗೊಡಿ. ಆಗ ನಿಮಗೆ ತಿಳಿಸಿದ ಕೇಡು ಒದಗದಂತೆ ಸರ್ವೇಶ್ವರ ತಮ್ಮ ಮನಸ್ಸನ್ನು ಬದಲಾಯಿಸಿಕೊಳ್ಳುವರು. 14ನಾನೋ ನಿಮ್ಮ ಕೈಯಲ್ಲಿದ್ದೇನೆ. ನಿಮಗೆ ಯಾವುದು ಒಳ್ಳೆಯದು, ಯಾವುದು ನ್ಯಾಯವಾದುದು ಎಂದು ತೋರುತ್ತದೆಯೋ ಅದನ್ನು ನನಗೆ ಮಾಡಿ. 15ಆದರೆ ಒಂದು ವಿಷಯ ನಿಮಗೆ ಚೆನ್ನಾಗಿ ತಿಳಿದಿರಲಿ – ನೀವು ನನ್ನನ್ನು ಕೊಂದು ಹಾಕಿದ್ದೇ ಆದರೆ, ನಿರ್ದೋಷಿಯ ರಕ್ತ ಸುರಿಸಿದ ಅಪರಾಧಕ್ಕೆ ನೀವೂ ಈ ನಗರವೂ ಇದರ ನಿವಾಸಿಗಳೂ ಗುರಿಯಾಗುವಿರಿ. ಏಕೆಂದರೆ ಈ ಮಾತುಗಳನ್ನೆಲ್ಲ ನಿಮ್ಮ ಕಿವಿಗೆ ಮುಟ್ಟಿಸುವಂತೆ ನನ್ನನ್ನು ಕಳಿಸಿದವರು ಸರ್ವೇಶ್ವರ ಎಂಬುದು ಸತ್ಯ," ಎಂದು ಹೇಳಿದನು.

16 ಇದನ್ನು ಕೇಳಿದ ನಾಯಕರು ಮತ್ತು ಸಕಲ ಜನರು ಯಾಜಕ – ಪ್ರವಾದಿಗಳಿಗೆ, "ಇವನು ಮರಣದಂಡನೆಗೆ ಪಾತ್ರನಲ್ಲ. ಏಕೆಂದರೆ ನಮ್ಮ ದೇವರಾದ ಸರ್ವೇಶ್ವರನ ಹೆಸರಿನಲ್ಲೇ ಇದನ್ನು ನಮಗೆ ನುಡಿದಿದ್ದಾನೆ," ಎಂದರು.

17 ತರುವಾಯ ನಾಡಿನ ಹಿರಿಯರಲ್ಲಿ ಕೆಲವರು ಎದ್ದು ನಿಂತು ನೆರೆದಿದ್ದ ಜನರನ್ನು ಉದ್ದೇಶಿಸಿ ಹೀಗೆಂದರು: 18"ಜುದೇಯದ ಅರಸನಾದ ಹಿಜ್ಕೀಯನ ಕಾಲದಲ್ಲಿ ಮೋರೆಷೆತ್ ಊರಿನವನಾದ ಮಿಕಾಯನು ಯೆಹೂದ್ಯರೆಲ್ಲರಿಗೆ:

'ಸೇನಾಧೀಶ್ವರ ಸರ್ವೇಶ್ವರನ ಮಾತನ್ನು ಕೇಳಿರಿ:
ಸಿಯೋನ್ ನಗರವನ್ನು ಹೊಲದಂತೆ
ಉಳಲಾಗುವುದು;
ಜೆರುಸಲೇಮ್ ಹಾಳು ದಿಬ್ಬಗಳಾಗಿ
ಮಾರ್ಪಡುವುದು;
ಸರ್ವೇಶ್ವರನ ಆಲಯವಿರುವ ಪರ್ವತ
ಕಾಡು ಗುಡ್ಡಗಳಂತಾಗುವುದು' ಎಂದು
ಸಾರಿದ.

19 ಆಗ ಜುದೇಯದ ಅರಸ ಹಿಜ್ಕೀಯನು ಮತ್ತು ಯೆಹೂದ್ಯರೆಲ್ಲರು, "ಅವನನ್ನು ಕೊಂದು ಹಾಕಿದರೋ? ಇಲ್ಲವೇ ಇಲ್ಲ. ಬದಲಿಗೆ ಆ ಅರಸ ಭಯಭಕ್ತಿಯಿಂದ ಸರ್ವೇಶ್ವರನ ದಯೆಯನ್ನು ಬೇಡಿಕೊಂಡ. ಆಗ ಸರ್ವೇಶ್ವರ ವಿಧಿಸಬೇಕೆಂದಿದ್ದ ದಂಡನೆಯನ್ನು ವಿಧಿಸದೆ ಮನಸ್ಸನ್ನು ಬದಲಾಯಿಸಿಕೊಂಡರಲ್ಲವೆ? ಇವನನ್ನು ಕೊಂದುಹಾಕುವುದರಿಂದ ನಾನು ನಮ್ಮ ಮೇಲೆ ದೊಡ್ಡ ಕೇಡನ್ನು ಬರಮಾಡಿಕೊಳ್ಳುತ್ತೇವೆ," ಎಂದರು.

20 ಸರ್ವೇಶ್ವರನ ಹೆಸರಿನಲ್ಲಿ ಪ್ರವಾದನೆ ಮಾಡುತ್ತಿದ್ದ ಮತ್ತೊಬ್ಬ ವ್ಯಕ್ತಿ ಇದ್ದ. ಅವನು ಕಿರ್ಯತ್‌ಯಾರೀಮ್ ಊರಿಗೆ ಸೇರಿದ ಶಮಾಯನ ಮಗ ಊರೀಯ ಎಂಬುವನು. ಯೆರೆಮೀಯನು ನುಡಿದಂತೆಯೇ ಈ ನಗರಕ್ಕೂ ಈ ನಾಡಿಗೂ ಅಹಿತವಾದುದನ್ನೆ ನುಡಿಯುತ್ತಿದ್ದ. 21ಅರಸ ಯೆಹೋಯಾಕೀಮನು ಮತ್ತು ಅವನ ಎಲ್ಲ ವೀರಶೂರರು ಹಾಗು ನಾಯಕರು ಆ ಊರೀಯನ ಮಾತುಗಳನ್ನು ಕೇಳಿಸಿಕೊಂಡರು. ಕೂಡಲೆ ಅರಸ ಅವನನ್ನು ಕೊಂದುಹಾಕಲು ಮನಸ್ಸುಮಾಡಿದ. ಈ ಸುದ್ದಿಯನ್ನು ಕೇಳಿದ ಊರೀಯ ಭಯಪಟ್ಟು ಓಡಿಹೋಗಿ ಈಜಿಪ್ಟನ್ನು ಸೇರಿಕೊಂಡ. 22ಆಗ ಅರಸ ಯೆಹೋಯಾಕೀಮನು ಅಕ್ಬೋರನ ಮಗ ಎಲ್ನಾಥಾನನನ್ನೂ ಕೆಲವು ಸಂಗಡಿಗರನ್ನೂ ಅಲ್ಲಿಗೆ ಕಳಿಸಿದ. 23ಅವರು ಊರೀಯನನ್ನು ಈಜಿಪ್ಟಿನಿಂದ ಎಳೆದು ಅರಸ ಯೆಹೋಯಾಕೀಮನ ಬಳಿಗೆ ತಂದರು. ಅರಸ ಅವನನ್ನು ಕತ್ತಿಯಿಂದ ಕಡಿಸಿ, ಶವವನ್ನು ಜನಸಾಮಾನ್ಯರ ಸಮಾಧಿಗಳ ನಡುವೆ ಹೂಣಿಸಿದ.

24 ಇತ್ತ ಯಾಜಕರೂ ಪ್ರವಾದಿಗಳೂ ಯೆರೆಮೀಯನನ್ನು ಜನರ ಕೈಗೆ ಸಿಕ್ಕಿಸಿ ಕೊಲ್ಲಿಸಲು
ಸಾಧ್ಯವಾಗಲಿಲ್ಲ. ಏಕೆಂದರೆ ಯೆರೆಮೀಯನಿಗೆ ಶಾಫಾನನ ಮಗ ಅಹೀಕಾಮನ ಸಹಾಯ ದೊರಕಿತ್ತು.

### ನೊಗಕ್ಕೆ ಹೆಗಲು ಕೊಡಿ

**27** ಯೋಷೀಯನ ಮಗನೂ ಜುದೇಯದ ಅರಸನೂ ಆದ ಯೆಹೋಯಾಕೀಮನ ಆಳ್ವಿಕೆಯ
ಆರಂಭದಲ್ಲಿ ಸರ್ವೇಶ್ವರನಿಂದ ಯೆರೆಮೀಯನಿಗೆ ಈ ವಾಣಿಯಾಯಿತು: 2 "ಇದು ಸರ್ವೇಶ್ವರನ ನುಡಿ –
ನೊಗವನ್ನೂ ಕಣ್ಣಿಗಳನ್ನೂ ಮಾಡಿ ನಿನ್ನ ಹೆಗಲಿಗೆ ಹಾಕಿಕೊ. 3ಜುದೇಯದ ಅರಸ ಚಿದ್ಕೀಯನನ್ನು
ನೋಡಲು ಜೆರುಸಲೇಮಿಗೆ ಬಂದಿರುವ ರಾಯಭಾರಿಗಳ ಮೂಲಕ ಎದೋಮಿನ ರಾಜ, ಮೋವಾಬಿನ
ರಾಜ, ಅಮ್ಮೋನ್ಯ ರಾಜ, ಟೈರಿನ ರಾಜ, ಸಿದೋನಿನ ರಾಜ ಇವರುಗಳಿಗೆ ಒಂದು ಸಮಾಚಾರವನ್ನು ಕಳಿಸು.
4ಅವರು ತಮ್ಮ ತಮ್ಮ ರಾಜರುಗಳಿಗೆ ಅದನ್ನು ತಿಳಿಸುವಂತೆ ಆಜ್ಞಾಪಿಸು. ಆ ಸಮಾಚಾರವೇನೆಂದರೆ –
ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರನ ಮಾತುಗಳಿವು; ನಿಮ್ಮ ರಾಜರುಗಳು
ಅರಿಯಬೇಕಾದ ವಿಷಯವಿದು: 5ನನ್ನ ಮಹಾಶಕ್ತಿಯಿಂದಲೂ ನೀಡುಗೈಯಿಂದಲೂ ಲೋಕವನ್ನೂ
ಭೂಮಿಯನ್ನೂ ಅದರ ಮಾನವರನ್ನು ಮತ್ತು ಪ್ರಾಣಿಗಳನ್ನೂ ಸೃಷ್ಟಿಸಿದವನೂ ನಾನೇ. ಈ ನನ್ನ ಸೃಷ್ಟಿಯನ್ನು
ನನಗೆ ಸರಿ ತೋಚಿದವನಿಗೆ ಕೊಡಬಲ್ಲೆ. 6ಈಗ ಈ ನಾಡುಗಳನ್ನೆಲ್ಲ ಬಾಬಿಲೋನಿಯದ ಅರಸ ಹಾಗೂ
ನನ್ನ ಸೇವಕನಾದ ನೆಬೂಕದ್ನೆಚ್ಚರನ ಕೈವಶಮಾಡಿದ್ದೇನೆ. ಅವನ ಸೇವೆಗಾಗಿ ಕಾಡು ಮೃಗಗಳನ್ನೂ
ಕೊಟ್ಟಿದ್ದೇನೆ. 7ಅವನ ದೇಶಕ್ಕೆ ನಿಯಮಿತ ಕಾಲ ಬರುವತನಕ ಎಲ್ಲ ರಾಷ್ಟ್ರಗಳು ಅವನಿಗೂ ಅವನ
ಮಗನಿಗೂ ಮೊಮ್ಮಗನಿಗೂ ಅಡಿಯಾಳಾಗಿ ಇರಬೇಕು. ಆಮೇಲೆ ಅನೇಕ ರಾಷ್ಟ್ರಗಳೂ ಮಹಾರಾಜರೂ
ಅವನನ್ನೇ ಅಡಿಯಾಳನ್ನಾಗಿ ಮಾಡಿಕೊಳ್ಳುವರು."

8 "ಆದರೆ ಯಾವುದಾದರು ರಾಷ್ಟ್ರ ಅಥವಾ ರಾಜ್ಯ ಬಾಬಿಲೋನಿನ ಅರಸ ನೆಬೂಕದ್ನೆಚ್ಚರನ
ಅಡಿಯಾಳಾಗಲು, ಅದರ ಅರಸನ ನೊಗಕ್ಕೆ ಹೆಗಲುಕೊಡಲು ಒಪ್ಪದೆ ಹೋದರೆ, ಆ ರಾಷ್ಟ್ರವನ್ನು ನಾನು
ಖಡ್ಗ–ಕ್ಷಾಮ–ವ್ಯಾಧಿಗಳಿಂದ ದಂಡಿಸುತ್ತಾ ಬರುವೆನು. ಕೊನೆಗೆ ಆ ಅರಸನ ಕೈಯಿಂದಲೆ ಅದನ್ನು
ನಿರ್ಮೂಲಮಾಡಿಸುವೆನು. ಇದು ಸರ್ವೇಶ್ವರನಾದ ನನ್ನ ನುಡಿ. 9"ನೀವು ಬಾಬಿಲೋನಿನ ಅರಸನಿಗೆ
ಅಡಿಯಾಳುಗಳು ಆಗುವುದಿಲ್ಲ' ಎಂದು ನಿಮಗೆ ನುಡಿಯುವ ನಿಮ್ಮ ಪ್ರವಾದಿಗಳು ಶಕುನದವರು, ಕನಸಿಗರು,
ಕಣಿಯವರು, ಮಾಟಗಾರರು. ಅವರಿಗೆ ಕಿವಿಗೊಡಲೇಬೇಡಿ. 10ಅವರು ನಿಮಗೆ ಸುಳ್ಳನ್ನು ಸಾರುತ್ತಾರೆ.
ಅವರ ದುರ್ಬೋಧನೆಯ ನಿಮಿತ್ತ ನಾನು ನಿಮ್ಮನ್ನು ಹೊರದೂಡಬೇಕಾಗುವುದು; ನೀವು ದೇಶಭ್ರಷ್ಟರಾಗಿ
ನಾಶವಾಗುವಿರಿ. 11ಯಾವ ರಾಷ್ಟ್ರ ಬಾಬಿಲೋನಿಯದ ಅರಸನ ನೊಗಕ್ಕೆ ಹೆಗಲು ಕೊಟ್ಟು ಅವನ
ಅಡಿಯಾಳಾಗುವುದೋ ಆ ರಾಷ್ಟ್ರದವರನ್ನು ನಾನು ಅವರ ಸ್ವಂತ ನಾಡಿನಲ್ಲೆ ನೆಲೆಗೊಳಿಸುವೆನು; ಅವರು
ಅಲ್ಲೆ ಉತ್ತು, ಬಿತ್ತು ವಾಸಮಾಡುವರು. ಸರ್ವೇಶ್ವರನಾದ ನಾನೇ ಇದನ್ನು ನುಡಿದಿದ್ದೇನೆ."

12 ಜುದೇಯದ ಅರಸನಾದ ಚಿದ್ಕೀಯನಿಗೂ ನಾನು ಅದೇ ಮಾತುಗಳನ್ನು ಹೇಳಿದೆ: "ನೀವು
ಬಾಬಿಲೋನಿಯದ ಅರಸನ ನೊಗಕ್ಕೆ ಹೆಗಲು ಕೊಟ್ಟು ಅವನಿಗೂ ಅವನ ಜನರಿಗೂ ಅಡಿಯಾಳಾಗಬೇಕು.
ಆಗ ಬದುಕುವಿರಿ. 13ಬಾಬಿಲೋನಿಯದ ಅರಸನ ಅಡಿಯಾಳಾಗಲು ನಿರಾಕರಿಸಿದ ರಾಷ್ಟ್ರವು
ಖಡ್ಗಕ್ಷಾಮವ್ಯಾದಿಗಳಿಂದ ಸಾಯಬೇಕಾಗುವುದೆಂದು ಸರ್ವೇಶ್ವರನೇ ನುಡಿದಿದ್ದಾರೆ. ಅಂಥ ಗತಿ ನಿಮಗೂ
ನಿಮ್ಮ ಪ್ರಜೆಗೂ ಏಕೆ ಬರಬೇಕು? 14'ನೀವು ಬಾಬಿಲೋನಿಯದ ಅರಸನ ಅಡಿಯಾಳಾಗುವುದಿಲ್ಲ' ಎಂದು
ನಿಮಗೆ ನುಡಿಯುವ ಪ್ರವಾದಿಗಳ ಮಾತುಗಳಿಗೆ ಕಿವಿಗೊಡಬೇಡಿ; ಅವರು ನಿಮಗೆ ಸುಳ್ಳನ್ನು ಸಾರುತ್ತಾರೆ.
15ಅವರನ್ನು ನಾನು ಕಳಿಸಲಿಲ್ಲ; ನನ್ನ ಹೆಸರೆತ್ತಿ ಸುಳ್ಳನ್ನು ಸಾರುತ್ತ ಇದ್ದಾರೆ. ಅವರ ದುರ್ಬೋಧನೆಯ
ನಿಮಿತ್ತ ನಾನು ನಿಮ್ಮನ್ನು ಹೊರದೂಡಬೇಕಾಗುವುದು, ನೀವು ನಾಶವಾಗುವಿರಿ, ಎಂದು ಸರ್ವೇಶ್ವರನೇ
ನುಡಿದಿದ್ದಾರೆ."

16 ಬಳಿಕ ನಾನು ಯಾಜಕರಿಗೂ ಈ ಜನರೆಲ್ಲರಿಗೂ ಹೀಗೆಂದು ಸಾರಿದೆ: "ಇಗೋ, ಕೇಳಿ
ಸರ್ವೇಶ್ವರನ ನುಡಿ:

‘ದೇವಾಲಯದ ಉಪಕರಣಗಳನ್ನು ಬೇಗನೆ ಬಾಬಿಲೋನಿನಿಂದ ಹಿಂದಕ್ಕೆ ತರಲಾಗುವುದು’ ಎಂಬುದಾಗಿ ನಿಮಗೆ ಪ್ರವಾದಿಸುವವರ ಮಾತುಗಳನ್ನು ಕೇಳಬೇಡಿ, ಅವರು ನಿಮಗೆ ಸುಳ್ಳನ್ನು ಸಾರುತ್ತಾರೆ.
17ಅವರಿಗೆ ನೀವು ಕಿವಿಗೊಡಲೇಬಾರದು. ಬಾಬಿಲೋನಿಯದ ಅರಸನಿಗೆ ಅಡಿಯಾಳಾಗಿರಿ. ಆಗ
ಬದುಕುವಿರಿ. ಈ ನಗರವೇಕೆ ನಾಶವಾಗಬೇಕು? 18ಅವರು ನಿಜವಾದ ಪ್ರವಾದಿಗಳಾಗಿದ್ದರೆ, ಸರ್ವೇಶ್ವರನ
ವಾಕ್ಯ ಅವರಲ್ಲಿ ನೆಲೆಸಿದ್ದರೆ, ದೇವಾಲಯದಲ್ಲೂ ಜುದೇಯದ ಅರಸನ ಮನೆಯಲ್ಲೂ ಜೆರುಸಲೇಮಿನಲ್ಲೂ ಇನ್ನು ಉಳಿದಿರುವ ಉಪಕರಣಗಳು ಬಾಬಿಲೋನಿಗೆ ಹೋಗದಂತೆ ಸರ್ವಶಕ್ತ ಸರ್ವೇಶ್ವರನಿಗೆ ವಿಜ್ಞಾಪನೆಮಾಡಿ ಬೇಡಿಕೊಳ್ಳಲಿ.”

19-20(ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ಯೆಹೋಯಾಕೀಮನ ಮಗನೂ ಜುದೇಯದ ಅರಸನೂ ಆದ ಯೆಕೊನ್ಯನನ್ನು ಮತ್ತು ಜುದೇಯದ ಹಾಗು ಜೆರುಸಲೇಮಿನ ಬಾಬಿಲೋನಿಗೆ ಸೆರೆ ಒಯ್ದಾಗ ಕೆಲವು ಸಾಮಾನುಗಳನ್ನು, ಅಂದರೆ ಕಂಬಗಳು, ಕಂಚಿನ ಕಡಲು, ಪೀಠಗಳು, ನಗರದಲ್ಲಿ ಉಳಿದಿರುವ ಮತ್ತಿತರ ಉಪಕರಣಗಳು ಇವನ್ನು ತೆಗೆದುಕೊಂಡು ಹೋಗಲಿಲ್ಲ.)

21 ದೇವಾಲಯದಲ್ಲೂ ಜುದೇಯದ ಅರಸನ ಮನೆಯಲ್ಲೂ ಜೆರುಸಲೇಮಿನಲ್ಲೂ ಉಳಿದಿರುವ ಈ ಉಪಕರಣಗಳ ವಿಷಯವಾಗಿ ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಇಂತೆನ್ನುತ್ತಾರೆ:
22“ಅವುಗಳನ್ನು ಬಾಬಿಲೋನಿಗೆ ಒಯ್ಯಲಾಗುವುದು. ನಾನು ಬಿಡಿಸುವ ತನಕ ಅವು ಅಲ್ಲೇ ಇರುವುವು. ಬಳಿಕ ನಾನು ಅವುಗಳನ್ನು ತಂದು ಈ ಸ್ಥಳಕ್ಕೆ ಸೇರಿಸುವೆನು. ಇದು ಸರ್ವೇಶ್ವರನಾದ ನನ್ನ ನುಡಿ.”

## ಹನನ್ಯನೊಡನೆ ವ್ಯಾಜ್ಯ

**28** ಅದೇ ವರ್ಷದಲ್ಲಿ, ಅಂದರೆ ಜುದೇಯದ ಅರಸ ಚಿದ್ಕೀಯನ ಆಳ್ವಿಕೆಯಲ್ಲಿ ನಾಲ್ಕನೆಯ ವರ್ಷದ ಐದನೆಯ ತಿಂಗಳಲ್ಲಿ, ಪ್ರವಾದಿಯಾದ ಅಜ್ಜೂರನ ಮಗನು ಹಾಗು ಗಿಬ್ಯೋನ್ ಊರಿನವನು ಆದ ಹನನ್ಯನು ಸರ್ವೇಶ್ವರನ ಆಲಯದೊಳಗೆ ಬಂದು ಯಾಜಕರ ಮತ್ತು ಸಕಲ ಜನರ ಮುಂದೆ ನಿಂತು ನನಗೆ ಹೀಗೆ
ಹೇಳಿದ – 2“ಇಸ್ರಯೇಲರ ದೇವರೂ ಸರ್ವಶಕ್ತರೂ ಆದ ಸರ್ವೇಶ್ವರನ ನುಡಿ ಇದು: ‘ಬಾಬಿಲೋನಿಯದ
ಅರಸನು ಹೇರಿರುವ ನೊಗವನ್ನು ಮುರಿದುಬಿಟ್ಟಿದ್ದೇನೆ. 3ಬಾಬಿಲೋನಿಯದ ಅರಸನಾದ ನೆಬೂಕದ್ನೆಚ್ಚರನು
ಈ ಸ್ಥಳದಿಂದ ಬಾಬಿಲೋನಿಗೆ ಕೊಂಡು ಒಯ್ದ ಸರ್ವೇಶ್ವರನ ಆಲಯದ ಸಕಲ ಉಪಕರಣಗಳನ್ನು ಎರಡು
ವರ್ಷಗಳೊಳಗಾಗಿ ನಾನು ಪುನಃ ಈ ಸ್ಥಳಕ್ಕೆ ಸೇರಿಸುವೆನು. 4ಯೆಹೋಯಾಕೀಮನ ಮಗನೂ
ಜುದೇಯದ ಅರಸನೂ ಆದ ಯೆಕೊನ್ಯನನ್ನು ಮತ್ತು ಬಾಬಿಲೋನಿಗೆ ಸೆರೆಹೋದ ಎಲ್ಲ ಯೆಹೂದ್ಯರನ್ನು ಈ ಸ್ಥಳಕ್ಕೆ ಮರಳಿ ಬರಮಾಡುವೆನು. ಇದು ಸರ್ವೇಶ್ವರನ ನುಡಿ.”

5 ಆಗ ಪ್ರವಾದಿ ಯೆರೆಮೀಯನು ಸರ್ವೇಶ್ವರನ ಆಲಯದೊಳಗೆ ನಿಂತಿದ್ದ ಯಾಜಕರ ಮತ್ತು
ಸಕಲ ಜನರ ಎದುರಿನಲ್ಲೆ ಪ್ರವಾದಿ ಹನನ್ಯನಿಗೆ: 6“ಆಮೆನ್! ಸರ್ವೇಶ್ವರ ಹಾಗೆಯೇ ಮಾಡಲಿ! ಸರ್ವೇಶ್ವರ
ತಮ್ಮ ಆಲಯದ ಉಪಕರಣಗಳನ್ನೂ ಸೆರೆಹೋದವರೆಲ್ಲರನ್ನೂ ಬಾಬಿಲೋನಿನಿಂದ ಈ ಸ್ಥಳಕ್ಕೆ ಪುನಃ
ಬರಮಾಡಲಿ. ನೀನು ನುಡಿದ ಮಾತುಗಳನ್ನು ನೆರವೇರಿಸಲಿ! 7ಆದರೆ ನಾನು, ನಿನ್ನ ಮತ್ತು ಸಕಲ ಜನರ
ಕಿವಿಗೆ ಬೀಳುವಂತೆ ನುಡಿಯುವ ಈ ಮಾತನ್ನು ಗಮನಿಸು: 8ನನಗೂ ನಿನಗೂ ಹಿಂದೆ, ಪುರಾತನ
ಕಾಲದಿಂದಿದ್ದ ಪ್ರವಾದಿಗಳು ಅನೇಕ ದೇಶಗಳಿಗೂ ದೊಡ್ಡ ದೊಡ್ಡ ರಾಜ್ಯಗಳಿಗೂ ಯುದ್ಧ, ಆಪತ್ತು-ವಿಪತ್ತು,
ಕಾಯಿಲೆ-ಕಷ್ಟ, ಇಂಥವುಗಳನ್ನು ಸಾರುತ್ತಿದ್ದರು. 9ಹಿತಸಮಾಚಾರವನ್ನು ಸಾರುವ ಪ್ರವಾದಿಯೇ
ಸರ್ವೇಶ್ವರನಿಂದ ನಿಜವಾಗಿ ಕಳಿಸಲ್ಪಟ್ಟವನೆಂದು ಅವನ ಮಾತು ಕೈಗೂಡಿದ ಮೇಲೆ ತಿಳಿಯತಕ್ಕದ್ದು,” ಎಂದು ಹೇಳಿದನು.

10 ಆಗ ಪ್ರವಾದಿ ಹನನ್ಯನು ಪ್ರವಾದಿ ಯೆರೆಮೀಯನ ಹೆಗಲಿನಿಂದ ನೊಗವನ್ನು ತೆಗೆದು
ಮುರಿದುಹಾಕಿದನು. 11ನೆರೆದಿದ್ದ ಜನರೆಲ್ಲರ ಮುಂದೆ, “ಸರ್ವೇಶ್ವರನೇ ಹೇಳಿದ್ದಾರೆ – ಇದೇ ಪ್ರಕಾರ,
ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ಹೊರಿಸಿರುವ ನೊಗವನ್ನು ಇನ್ನೆರಡು ವರ್ಷದೊಳಗೆ ಸಮಸ್ತ

ರಾಷ್ಟ್ರಗಳ ಹೆಗಲಿನಿಂದ ತೆಗೆದು ಮುರಿದು ಹಾಕಲಾಗುವುದು," ಎಂದು ಹೇಳಿದನು. ಇದನ್ನು ಕೇಳಿದ ಪ್ರವಾದಿ ಯೆರೆಮೀಯನು ಅಲ್ಲಿಂದ ಹೊರಟುಹೋದನು.

12 ಹೀಗೆ ಪ್ರವಾದಿ ಹನನ್ಯನು ಪ್ರವಾದಿ ಯೆರೆಮೀಯನ ಹೆಗಲಿನಿಂದ ನೊಗವನ್ನು ತೆಗೆದು,
ಮುರಿದುಹಾಕಿದ ಮೇಲೆ ಸರ್ವೇಶ್ವರ ಯೆರೆಮೀಯನಿಗೆ ಹೀಗೆಂದರು: 13"ನೀನು ಹೋಗಿ ಹನನ್ಯನಿಗೆ:
'ಸರ್ವೇಶ್ವರ ಇಂತೆನ್ನುತ್ತಾರೆ – ನೀನು ಮರದ ನೊಗಗಳನ್ನು ಮುರಿದು ಬಿಟ್ಟಿರುವೆ. ಅವುಗಳಿಗೆ ಬದಲಾಗಿ
ಕಬ್ಬಿಣದ ನೊಗಗಳನ್ನು ಮಾಡು. 14ಏಕೆಂದರೆ ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರನ
ಮಾತಿವು: ಈ ಎಲ್ಲ ರಾಷ್ಟ್ರಗಳು ಬಾಬಿಲೋನಿಯದ ಅರಸ ನೆಬೂಕದ್ನೆಚ್ಚರನಿಗೆ ಸೇವೆಮಾಡಲೆಂದು ನಾನು
ಅವುಗಳ ಹೆಗಲಿಗೆ ಕಬ್ಬಿಣದ ನೊಗವನ್ನು ಹೇರಿದ್ದೇನೆ. ಅವು ಅವನಿಗೆ ಸೇವೆ ಸಲ್ಲಿಸೇತೀರಬೇಕು; ಕಾಡು
ಮೃಗಗಳು ಕೂಡ ಸೇವೆಸಲ್ಲಿಸುವಂತೆ ಅವನಿಗೆ ಅವುಗಳನ್ನು ಒಪ್ಪಿಸಿದ್ದೇನೆ, ಎಂದು ಹೇಳು."

15 ಆಗ ಪ್ರವಾದಿ ಯೆರೆಮೀಯನು ಪ್ರವಾದಿ ಹನನ್ಯನಿಗೆ, "ಹನನ್ಯನೇ ಕೇಳು, ಸರ್ವೇಶ್ವರ ನಿನ್ನನ್ನು
ಕಳಿಸಲಿಲ್ಲ. ಆದರೂ ಈ ಜನರು ಸುಳ್ಳನ್ನು ನಂಬುವಂತೆ ಮಾಡುತ್ತಿರುವೆ. 16ಆದ ಕಾರಣ ಸರ್ವೇಶ್ವರ
ಇಂತೆನ್ನುತ್ತಾರೆ: ಇಗೋ, ನಾನು ನಿನ್ನನ್ನು ಈ ಜಗತ್ತಿನಿಂದ ತೊಲಗಿಸುವೆನು. ನೀನು ಸರ್ವೇಶ್ವರನಾದ ನನಗೆ
ವಿರುದ್ಧವಾಗಿ ದ್ರೋಹದ ಮಾತುಗಳನ್ನು ಆಡಿದ್ದರಿಂದ ಇದೇ ವರ್ಷ ಸಾಯುವೆ," ಎಂದು ಹೇಳಿದನು.
17 ಅಂತೆಯೇ ಹನನ್ಯನು ಅದೇ ವರ್ಷದ ಏಳನೆಯ ತಿಂಗಳಲ್ಲಿ ಸತ್ತುಹೋದನು.

### ಬಾಬಿಲೋನಿನಲ್ಲಿದ್ದ ಯೆಹೂದ್ಯರಿಗೆ ಯೆರೆಮೀಯನು ಬರೆದ ಪತ್ರ

**29** ಜೆರುಸಲೇಮಿನಿಂದ ಬಾಬಿಲೋನಿಗೆ ನೆಬೂಕದ್ನೆಚ್ಚರನು ಸೆರೆ ಒಯ್ದಿದ್ದ ಹಿರಿಯರಿಗೂ ಯಾಜಕರಿಗೂ
ಪ್ರವಾದಿಗಳಿಗೂ ಸಕಲ ಜನರಿಗೂ ಪ್ರವಾದಿ ಯೆರೆಮೀಯನು ಜೆರುಸಲೇಮಿನಿಂದ ಒಂದು ಪತ್ರವನ್ನು
ಬರೆದನು. 2ಅರಸ ಯೆಕೋನ್ಯನು, ರಾಜಮಾತೆಯು, ಕಂಚುಕಿಗಳು, ಜುದೇಯದ ಮತ್ತು ಜೆರುಸಲೇಮಿನ
ಪದಾಧಿಕಾರಿಗಳು, ಶಿಲ್ಪಿಗಳು, ಕಮ್ಮಾರರು, ಇವರೆಲ್ಲರು ಜೆರುಸಲೇಮನ್ನು ಬಿಟ್ಟು ಹೋದ ಮೇಲೆ ಈ
ಪತ್ರವನ್ನು ಬರೆದನು. 3ಅದನ್ನು ಶಾಫಾನನ ಮಗ ಎಲ್ಲಾಸ, ಹಿಲ್ಕೀಯನ ಮಗ ಗೆಮರ್ಯ ಇವರ ಕೈಯಲ್ಲಿ
ಕಳಿಸಿದನು. ಇವರು ಜುದೇಯದ ಅರಸ ಚಿದ್ಕೀಯನಿಂದ ಬಾಬಿಲೋನಿಗೆ ಅದರ ಅರಸ ನೆಬೂಕದ್ನೆಚ್ಚರನ
ಬಳಿಗೆ ಕಳಿಸಲಾಗಿದ್ದ ರಾಯಭಾರಿಗಳು. ಆ ಪತ್ರದ ಮಾತುಗಳು ಇವು:

4 "ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರಸ್ವಾಮಿ ಜೆರುಸಲೇಮಿನಿಂದ
ಬಾಬಿಲೋನಿಗೆ ಸಾಗಿಸಲಾಗಿರುವ ಸೆರೆಯವರೆಲ್ಲರಿಗೆ ಹೀಗೆಂದು ತಿಳಿಸುತ್ತಾರೆ: 5'ನೀವು ಮನೆಗಳನ್ನು
ಕಟ್ಟಿಕೊಂಡು ಅವುಗಳಲ್ಲಿ ವಾಸಿಸಿರಿ. ತೋಟಗಳನ್ನು ಮಾಡಿಕೊಂಡು ಅವುಗಳ ಫಲಗಳನ್ನು ಅನುಭವಿಸಿರಿ.
6ಸಂಸಾರಿಗಳಾಗಿ ಗಂಡು ಹೆಣ್ಣು ಮಕ್ಕಳನ್ನು ಪಡೆಯಿರಿ. ನಿಮ್ಮ ಗಂಡು ಮಕ್ಕಳಿಗೆ ಹೆಣ್ಣುಗಳನ್ನು ತೆಗೆದುಕೊಳ್ಳಿ.
ನಿಮ್ಮ ಹೆಣ್ಣುಗಳನ್ನು ಗಂಡುಗಳಿಗೆ ಕೊಡಿ. ಅವರೂ ಗಂಡುಹೆಣ್ಣು ಮಕ್ಕಳನ್ನು ಪಡೆಯಲಿ. ನೀವು
ಇರುವಲ್ಲಿಯೇ ವೃದ್ಧಿಯಾಗಿರಿ, ಕಡಿಮೆಯಾಗದಿರಿ. 7ನಾನು ಯಾವ ನಗರಕ್ಕೆ ನಿಮ್ಮನ್ನು ಸಾಗಿಸಿದ್ದೇನೋ
ಅದರ ಕ್ಷೇಮವನ್ನು ಹಾರೈಸಿ, ಅದಕ್ಕಾಗಿ ಸರ್ವೇಶ್ವರನಾದ ನನ್ನನ್ನು ಪ್ರಾರ್ಥಿಸಿರಿ. ಅದರ ಕ್ಷೇಮವೇ ನಿಮ್ಮ
ಕ್ಷೇಮ. 8ಇಸ್ರಯೇಲರ ದೇವರೂ ಸೇನಾಧೀಶ್ವರ ಸರ್ವೇಶ್ವರನೂ ಆದ ನಾನು ನಿಮಗೆ ಹೇಳುತ್ತೇನೆ: ನಿಮ್ಮ
ಮಧ್ಯೆ ಇರುವ ಪ್ರವಾದಿಗಳಿಗೂ ಶಕುನದವರಿಗೂ ಕಿವಿಗೊಟ್ಟು ಮೋಸಹೋಗದಿರಿ. ನಿಮಗಾಗಿ ಕನಸುಕಂಡು
ಹೇಳುವವರನ್ನು ನಂಬಬೇಡಿ. 9ಅವರು ನನ್ನ ಹೆಸರಿನಲ್ಲಿ ನಿಮಗೆ ಸುಳ್ಳನ್ನೇ ಸಾರುತ್ತಾರೆ. ಅವರು ನನ್ನಿಂದ
ಕಳಿಸಿದವರಲ್ಲ. ಇದು ಸರ್ವೇಶ್ವರನಾದ ನನ್ನ ನುಡಿ.

10 "ಸರ್ವೇಶ್ವರ ಹೀಗೆನ್ನುತ್ತಾರೆ: 'ಬಾಬಿಲೋನಿನ ರಾಜ್ಯ ಎಪ್ಪತ್ತು ವರ್ಷ ಪ್ರಬಲಿಸಿದ ಮೇಲೆ ನಾನು
ನಿಮ್ಮನ್ನು ಸಂಧಿಸಿ ಈ ಸ್ಥಳಕ್ಕೆ ಮರಳಿ ಬರಮಾಡುವೆನು. ಈ ಶುಭವಾಕ್ಯವನ್ನು ನಿಮ್ಮ ಮೇಲ್ಮೆಗಾಗಿ
ನೆರವೇರಿಸುವೆನು. 11ನಿಮಗೆ ಇಂಥ ಗತಿ ಬರಲಿ ಎಂದಲ್ಲ, ನಿರೀಕ್ಷೆ ಇರಲಿ ಎಂದೇ ನಾನು ನಿಮ್ಮ ವಿಷಯದಲ್ಲಿ
ಮಾಡಿಕೊಂಡ ಆಲೋಚನೆಗಳನ್ನು ನಾನು ಮಾತ್ರ ಬಲ್ಲೆ. ಅವು ಅಹಿತ ಯೋಜನೆಗಳೇನೂ ಅಲ್ಲ,
ಹಿತಕರವಾದ ಯೋಜನೆಗಳೇ. 12ನೀವು ನನಗೆ ಮೊರೆಯಿಡುವಿರಿ, ನನ್ನನ್ನು ಪ್ರಾರ್ಥಿಸಲು ಬರುವಿರಿ; ನಾನು

ಕಿವಿಗೊಡುವೆನು. 13ನೀವು ನನ್ನನ್ನು ಹುಡುಕುವಿರಿ. ಮನಪೂರ್ವಕವಾಗಿ ಹುಡುಕಿದಾಗ ನನ್ನನ್ನು ಕಂಡುಕೊಳ್ಳುವಿರಿ. 14ಹೌದು, ನಾನು ನಿಮಗೆ ದೊರೆಯುವೆನು. ನಿಮ್ಮನ್ನು ನಿಮ್ಮ ದುರವಸ್ಥೆಯಿಂದ ತಪ್ಪಿಸಿ, ನಿಮ್ಮನ್ನು ಅಟ್ಟಲಾಗಿದ್ದ ಸಮಸ್ತ ದೇಶಗಳಿಂದಲೂ ಸಕಲ ರಾಷ್ಟ್ರಗಳ ಮಧ್ಯೆಯಿಂದಲೂ ಒಟ್ಟುಗೂಡಿಸಿ, ನಿಮ್ಮನ್ನು ಯಾವ ಸ್ಥಳದಿಂದ ಸೆರೆಗೆ ಸಾಗಿಸಿದೆನೋ ಅಲ್ಲಿಗೆ ಮರಳಿ ಬರಮಾಡುವೆನು. ಇದು ಸರ್ವೇಶ್ವರನಾದ ನನ್ನ ನುಡಿ.'

15 “ನೀವೋ, 'ಸರ್ವೇಶ್ವರ ನಮಗಾಗಿ ಬಾಬಿಲೋನಿನಲ್ಲೇ ಪ್ರವಾದಿಗಳನ್ನು ಏರ್ಪಡಿಸಿದ್ದಾರೆ' ಎಂದುಕೊಂಡಿದ್ದೀರಿ. 16ಸೇನಾಧೀಶ್ವರ ಸರ್ವೇಶ್ವರಸ್ವಾಮಿ, ದಾವೀದನ ಸಿಂಹಾಸನವನ್ನು ಅಲಂಕರಿಸಿದ್ದ ಅರಸನ ವಿಷಯವಾಗಿ ಹಾಗೂ ನಿಮ್ಮೊಂದಿಗೆ ಸೆರೆಹೋಗದ ನಿಮ್ಮ ಸೋದರರೂ ಈ ನಗರದ ನಿವಾಸಿಗಳೂ ಆದವರ ವಿಷಯವಾಗಿ ಹೇಳಿರುವುದನ್ನು ಕೇಳಿ: 17'ಇಗೋ, ನಾನು ಅವರ ಮೇಲೆ ಖಡ್ಗ – ಕ್ಷಾಮ–ವ್ಯಾಧಿಗಳನ್ನು ಬರಮಾಡುವೆನು. ಯಾರೂ ತಿನ್ನಲಾಗದಷ್ಟು ಕೆಟ್ಟು ಅಸಹ್ಯವಾದ ಅಂಜೂರದ ಹಣ್ಣಿನ ಗತಿಗೆ ಅವರನ್ನು ಇಳಿಸುವೆನು. 18ಖಡ್ಗ–ಕ್ಷಾಮ–ವ್ಯಾಧಿಗಳಿಂದ ಅವರನ್ನು ಹಿಂದಟ್ಟುತ್ತಾ ಲೋಕದ ಎಲ್ಲ ರಾಜ್ಯಗಳಿಗೆ ಭಯಾಸ್ಪದವಾಗುವಂತೆ ಮಾಡುವೆನು. ಅವರನ್ನು ಅಟ್ಟಲಾಗಿರುವ ಎಲ್ಲ ರಾಷ್ಟ್ರಗಳಲ್ಲಿ ಅವರು ಶಾಪ, ಪರಿಹಾಸ್ಯ, ದೂಷಣೆಗಳಿಗೆ ಗುರಿಯಾಗುವಂತೆ ಮಾಡುವೆನು. 19ಏಕೆಂದರೆ ಅವರು ನನ್ನ ಮಾತುಗಳನ್ನು ಕೇಳದೆ ಹೋದರು. ನನ್ನ ದಾಸರಾದ ಪ್ರವಾದಿಗಳನ್ನು ಪದೇಪದೇ ಅವರ ಬಳಿಗೆ ಕಳಿಸಿದರೂ ಕೇಳಲೊಲ್ಲದೆ ಹೋದರು. ಇದು ಸರ್ವೇಶ್ವರನಾದ ನನ್ನ ನುಡಿ. 20ಜೆರುಸಲೇಮಿನಿಂದ ಬಾಬಿಲೋನಿಗೆ ಸಾಗಿಸಲಾಗಿರುವ ಸೆರೆಯವರೇ, ನೀವೆಲ್ಲರು ಸರ್ವೇಶ್ವರನಾದ ನನ್ನ ವಾಕ್ಯಕ್ಕೆ ಕಿವಿಗೊಡಿ.'

21 “ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ತಮ್ಮ ಹೆಸರೆತ್ತಿ ಸುಳ್ಳನ್ನು ಸಾರುವ ಕೊಲಾಯನ ಮಗ ಅಹಾಬ ಮತ್ತು ಮಾಸೇಯನ ಮಗ ಚಿದ್ಕೀಯ ಇವರ ವಿಷಯವಾಗಿ ಹೀಗೆನ್ನುತ್ತಾರೆ: 'ಇಗೋ ನಾನು ಇವರನ್ನು ಬಾಬಿಲೋನಿಯದ ಅರಸ ನೆಬೂಕದ್ನೆಚ್ಚರನ ಕೈಗೆ ಬಿಡುವೆನು. ಅವನು ನಿಮ್ಮ ಕಣ್ಣೆದುರಿಗೆ ಇವರನ್ನು ಕೊಲ್ಲಿಸುವನು. 22ಇವರಿಗೆ ಒದಗಿದ ಗತಿಯನ್ನು ನೆನೆದು, ಬಾಬಿಲೋನಿಯದಲ್ಲಿ ಸೆರೆಯಾಗಿರುವ ಯೆಹೂದ್ಯರೆಲ್ಲರು ಯಾರನ್ನಾದರು ಶಪಿಸುವಾಗ, 'ಬಾಬಿಲೋನಿಯದ ಅರಸ ಬೆಂಕಿಯಲ್ಲಿ ಸುಟ್ಟು ಭಸ್ಮಮಾಡಿದ ಚಿದ್ಕೀಯನ ಹಾಗು ಅಹಾಬನ ಗತಿಯನ್ನೆ ಸರ್ವೇಶ್ವರ ನಿನಗೂ ತರಲಿ' ಎಂದು ಶಾಪ ಹಾಕುವರು. 23ಏಕೆಂದರೆ ಇವರು ಇಸ್ರಯೇಲಿನಲ್ಲಿ ದುರಾಚಾರವನ್ನು ನಡೆಸಿದರು. ನೆರೆಯವರ ಹೆಂಡಿರಲ್ಲಿ ವ್ಯಭಿಚಾರ ಮಾಡಿದರು. ನಾನು ಆಜ್ಞಾಪಿಸಿದ ಮಾತುಗಳನ್ನು ನನ್ನ ಹೆಸರೆತ್ತಿಯೇ ಸುಳ್ಳಾಗಿ ಸಾರಿದರು. ಇದೆಲ್ಲ ನನಗೆ ಗೊತ್ತಿದೆ, ಇದಕ್ಕೆಲ್ಲಾ ನಾನೇ ಸಾಕ್ಷಿ' ಎನ್ನುತ್ತಾರೆ ಸರ್ವೇಶ್ವರ.”

### ಯೆರೆಮೀಯನ ಪತ್ರಕ್ಕೆ ಶೆಮಾಯನ ಆಕ್ಷೇಪಣೆ

24 ನೆಹೆಲಾಮ್ಯನಾದ ಶೆಮಾಯನಿಗೆ ಹೀಗೆ ತಿಳಿಸಬೇಕೆಂದು ಸರ್ವೇಶ್ವರ ಯೆರೆಮೀಯನಿಗೆ ಅಪ್ಪಣೆಕೊಟ್ಟರು: 25“ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಇಂತೆನ್ನುತ್ತಾರೆ – 'ನೀನು ಜೆರುಸಲೇಮಿನಲ್ಲಿರುವ ಜನರೆಲ್ಲರಿಗೂ ಯಾಜಕನಾದ ಮಾಸೇಯನ ಮಗ ಚೆಫನ್ಯನಿಗೂ ಸಮಸ್ತ ಯಾಜಕರಿಗೂ ನಿನ್ನ ಹೆಸರಿನಲ್ಲೆ ಪತ್ರ ಬರೆದು ಕಳಿಸಿರುವೆ. ಚೆಫನ್ಯನಿಗೆ ನೀನು ಹೀಗೆಂದು ಬರೆದಿರುವೆ:

26 'ಸರ್ವೇಶ್ವರ ನಿನ್ನನ್ನು ಯೆಹೋಯಾದನ ಸ್ಥಾನದಲ್ಲಿ ದೇವಾಲಯದ ಯಾಜಕನನ್ನಾಗಿ ನೇಮಿಸಿದ್ದಾರೆ. ಯಾವನಾದರು ಮೈದುಂಬಿ ಪ್ರವಾದಿಯಾಗಿ ನಟಿಸಿದ್ದೇ ಆದರೆ ಅವನನ್ನು ಕೊಳಕ್ಕೆಹಾಕಿ, ಕೊರಳಿಗೆ ಕವೆಯೊಡ್ಡುವ ಅಧಿಕಾರವನ್ನು ನಿನಗೆ ವಹಿಸಿದ್ದಾರೆ. 27ಹೀಗಿರುವಲ್ಲಿ, ನಿಮ್ಮ ಮಧ್ಯೆ ಪ್ರವಾದಿಯಾಗಿ ನಟಿಸುವ ಅನಾತೋತಿನವನಾದ ಯೆರೆಮೀಯನನ್ನು ನೀನು ಖಂಡಿಸಲಿಲ್ಲವೇಕೆ? 28ಅವನು ಬಾಬಿಲೋನಿನಲ್ಲಿರುವ ನಮಗೆ ಪತ್ರ ಕಳಿಸಿ, 'ಪರದೇಶ ವಾಸವು ನಿಮಗೆ ದೀರ್ಘವಾಗುವುದು, ನೀವು ಮನೆಗಳನ್ನು ಕಟ್ಟಿಕೊಂಡು ಅವುಗಳಲ್ಲಿ ವಾಸಿಸಿರಿ, ತೋಟಗಳನ್ನು ಮಾಡಿಕೊಂಡು ಫಲವನ್ನು ಅನುಭವಿಸಿರಿ' ಎಂದು ತಿಳಿಸಿದ್ದಾನೆ.”

29 ಯಾಜಕನಾದ ಚೆಫನ್ಯನು ಈ ಪತ್ರವನ್ನು ನನ್ನ ಮುಂದೆ ಓದಿದನು. 30“ಸರ್ವೇಶ್ವರ ನನಗೆ ಹೀಗೆಂದು ಅಪ್ಪಣೆ ಮಾಡಿದ್ದಾರೆ: 31'ಸೆರೆಯಲ್ಲಿ ಇರುವ ಎಲ್ಲರಿಗೆ ಹೀಗೆಂದು ಹೇಳಿಕಳಿಸು –

ನೆಹೆಲಾಮ್ಯನಾದ ಶೆಮಾಯನ ವಿಷಯದಲ್ಲಿ ಸರ್ವೇಶ್ವರ ಇಂತೆನ್ನುತ್ತಾರೆ: ನಾನು ಕಳಿಸದೆ ಇದ್ದರೂ
ಶೆಮಾಯನು ನಿಮಗೆ ಪ್ರವಾದನೆ ಮಾಡಿ ಸುಳ್ಳನ್ನು ನಂಬುವಂತೆ ಮಾಡಿದ್ದಾನೆ. 32ಈ ಕಾರಣ, ಇಗೋ,
ನಾನು ಆ ನೆಹೆಲಾಮ್ಯನಾದ ಶೆಮಾಯನನ್ನು ಮತ್ತು ಅವನ ಸಂತತಿಯವರನ್ನು ದಂಡಿಸುವೆನು. ಈ ಜನರ
ಮಧ್ಯೆ ಅವನಿಗೆ ಯಾವ ಸಂತಾನವೂ ಇರದು. ಜನರಿಗೆ 'ನಾನು ಮಾಡಬೇಕೆಂದಿರುವ ಒಳಿತನ್ನು ಅವನು
ನೋಡದೆ ಹೋಗುವನು. ಏಕೆಂದರೆ ಅವನು ನನಗೆ ವಿರುದ್ಧ ಪ್ರಚೋದನೆಯ ಮಾತನ್ನು ಆಡಿದ್ದಾನೆ. ಇದು
ಸರ್ವೇಶ್ವರನಾದ ನನ್ನ ನುಡಿ'."

### ಬಿಡುಗಡೆಯ ವಾಗ್ದಾನ

**30** ಸರ್ವೇಶ್ವರಸ್ವಾಮಿ ಯೆರೆಮೀಯನಿಗೆ ಮತ್ತೊಮ್ಮೆ ಈ ಸಂದೇಶವನ್ನು ದಯಪಾಲಿಸಿದರು:
2"ಇಸ್ರಯೇಲರ ದೇವರಾದ ಸರ್ವೇಶ್ವರ ಹೀಗೆನ್ನುತ್ತಾರೆ – 'ನಾನು ನಿನಗೆ ಹೇಳಿರುವ ಮಾತುಗಳನ್ನೆಲ್ಲ
ಗ್ರಂಥ ರೂಪವಾಗಿ ಬರೆ. 3ಇಗೋ, ನಾನು ನನ್ನ ಪ್ರಜೆಯಾದ ಇಸ್ರಯೇಲರನ್ನೂ ಯೆಹೂದ್ಯರನ್ನೂ ಅವರ
ದುರವಸ್ಥೆಯಿಂದ ಬಿಡುಗಡೆಮಾಡುವ ದಿನಗಳು ಬರುವುವು. ಆಗ ನಾನು ಅವರನ್ನು ಅವರ ಪೂರ್ವಜರಿಗೆ
ಅನುಗ್ರಹಿಸಿದ ನಾಡಿಗೆ ಬರಮಾಡುವೆನು. ಅವರು ಅದನ್ನು ಅನುಭವಿಸುವರು. ಇದು ಸರ್ವೇಶ್ವರನಾದ ನನ್ನ
ನುಡಿ'."

4 ಸರ್ವೇಶ್ವರ ಇಸ್ರಯೇಲಿನ ಮತ್ತು ಜುದೇಯದ ವಿಷಯವಾಗಿ ಈ ಮಾತುಗಳನ್ನು ಹೇಳಿದರು:

5 "ಸರ್ವೇಶ್ವರ ಹೀಗೆನ್ನುತ್ತಾರೆ:
ಕೇಳಿಸಿದೆ ಭಯದಿಂದ ಕೂಡಿದ ಶಬ್ಧ
ಹೌದು, ಅದು ಕೂಡಿದೆ ಭೀತಿಯಿಂದ,
ಶಾಂತಿಯಿಂದಲ್ಲ.
6 ಗಂಡಸು ಪ್ರಸವವೇದನೆ ಪಡುವುದುಂಟೆ,
ಹೇಳು?
ಆದರೂ ಪ್ರತಿಯೊಬ್ಬನು ಹೆರುವ
ಮಹಿಳೆಯಂತೆ
ಸೊಂಟ ಹಿಸಿಕಿಕೊಳ್ಳುವುದು ನನ್ನ ಕಣ್ಣಿಗೆ
ಬೀಳುತ್ತಿದೆ ಏಕೆ?
ಅವರ ಮುಖಗಳು ಬಿಳಿಚಿಕೊಂಡಿವೆ ಏಕೆ?
7 ಹೌದು, ಭಯಂಕರವಾದ ದಿನ ಬರಲಿದೆ,
ಅದಕ್ಕಿರದು ಎಣೆ !
ಅದು ಇಕ್ಕಟ್ಟಿನ ದಿನ,
ಆದರೂ ಅದರಿಂದ ಯಕೋಬ್ಯರಿಗಿದೆ
ಬಿಡುಗಡೆ."

8 (ಸೇನಾಧೀಶ್ವರರಾದ ಸರ್ವೇಶ್ವರ ಹೇಳುವುದನ್ನು ಕೇಳು: "ಅವರ ಮೇಲೆ ಹೇರಲಾಗಿರುವ
ನೊಗವನ್ನು ನಾನು ಆ ದಿನದಂದು ಮುರಿದು ಬಿಡುವೆನು. ಕಣ್ಣುಗಳನ್ನು ಕಿತ್ತುಹಾಕುವೆನು. ಅನ್ಯ ಕುಲದವರು
ಇನ್ನು ಅವರನ್ನು ಗುಲಾಮರನ್ನಾಗಿ ಮಾಡಿಕೊಳ್ಳಲಾರರು. 9ಅವರು ತಮ್ಮ ದೇವರಾದ ಸರ್ವೇಶ್ವರನೆಂಬ
ನನಗೆ ಮತ್ತು ಅವರಿಗಾಗಿ ನಾನು ಏರ್ಪಡಿಸಲಿರುವ ರಾಜ ದಾವೀದನಿಗೆ ಸೇವೆಸಲ್ಲಿಸುವರು.)

10 "ನನ್ನ ದಾಸ ಯಕೋಬನೇ, ಅಂಜಬೇಡ !
ಇಸ್ರಯೇಲೇ, ಭಯಪಡಬೇಡ" ಎನ್ನುತ್ತಾರೆ
ಸರ್ವೇಶ್ವರ.
"ದೂರ ನಾಡಿನಿಂದ ನಿನ್ನನ್ನು

ಮುಕ್ತನನ್ನಾಗಿಸುವೆನು
ನಿನ್ನ ಸಂತಾನ ಸೆರೆಹೋದ ಸೀಮೆಯಿಂದ
ನಿನ್ನನ್ನು ಉದ್ಧರಿಸುವೆನು.
ಹಿಂದಿರುಗಿ, ಹಾಯಾಗಿ
ನೆಮ್ಮದಿಯಿಂದಿರುವುದು ಯಕೋಬು
ಯಾರಿಂದಲೂ ಅದನ್ನು ಹೆದರಿಸಲಾಗದು.
11 ನಿನ್ನನ್ನು ರಕ್ಷಿಸಲು ನಿನ್ನೊಂದಿಗೆ ನಾನಿರುವೆನು
ನಿನ್ನನ್ನು ಯಾವ ರಾಷ್ಟ್ರಗಳಿಗೆ ಅಟ್ಟಿ
ಚದರಿಸಿದೆನೋ
ಆ ರಾಷ್ಟ್ರಗಳನ್ನೆಲ್ಲ ನಿರ್ಮೂಲ ಮಾಡುವೆನು.
ನಿನ್ನನ್ನು ನಿರ್ಮೂಲ ಮಾಡೆನು, ಮಿತಿಮೀರಿ
ಶಿಕ್ಷಿಸೆನು;
ಆದರೆ ಶಿಕ್ಷಿಸದೆ ಮಾತ್ರ ಬಿಡೆನು –
ಇದು ಸರ್ವೇಶ್ವರನಾದ ನನ್ನ ನುಡಿ.”
12 ಹೌದು, ಸರ್ವೇಶ್ವರ ಹೀಗೆನ್ನುತ್ತಾರೆ:
“ನಿನ್ನ ಗಾಯಗಳು ಗುಣಹೊಂದವು
ನಿನ್ನ ಹುಣ್ಣನ್ನು ವಾಸಿಮಾಡಲಾಗದು.
13 ನಿನ್ನ ಪರ ವಾದಿಸುವವರಿಲ್ಲ, ನಿನ್ನ ವ್ರಣಕ್ಕೆ
ಔಷಧವಿಲ್ಲ
ನಿನ್ನನ್ನು ಆರೈಕೆ ಮಾಡುವವರಿಲ್ಲ.
14 ನಿನ್ನ ನಲ್ಲರೆಲ್ಲರು ಮರೆತುಬಿಟ್ಟರು, ನಿನ್ನನ್ನು
ಹುಡುಕದಿರುವರು
ಶತ್ರುವಿನಂತೆ ನಿನ್ನನ್ನು ಥಳಿಸಿದೆನು, ಕ್ರೂರವಾಗಿ
ದಂಡಿಸಿದೆನು.
ಏಕೆಂದರೆ, ನಿನ್ನ ಅಪರಾಧ ಹೆಚ್ಚಿದೆ
ನಿನ್ನ ಪಾಪಗಳು ಲೆಕ್ಕವಿಲ್ಲದಿವೆ.
15 ‘ಅಯ್ಯೋ ನೋವು ನಿಲ್ಲದಿದೆ,’ ಎಂದು
ನಿನ್ನ ಗಾಯಕ್ಕಾಗಿ ಗೋಳಿಡುತ್ತಿರುವೆ ಏಕೆ?
ನಿನ್ನ ಅಪರಾಧ ಹೆಚ್ಚಿದೆ, ಪಾಪಗಳು ಬಹಳವಿವೆ
ಎಂದೇ ಇದನ್ನೆಲ್ಲ ನಿನಗೆ ಮಾಡಿದೆ.
16 ಆದರೂ ನಿನ್ನನ್ನು ಕಬಳಿಸುವವರನ್ನು
ಕಬಳಿಸಲಾಗುವುದು
ನಿನ್ನ ಶತ್ರುಗಳೆಲ್ಲ ತಪ್ಪದೆ ಸೆರೆಹೋಗುವರು
ನಿನ್ನನ್ನು ಸೂರೆಮಾಡುವವರು
ಸೂರೆಯಾಗುವರು
ನಿನ್ನನ್ನು ಕೊಳ್ಳೆಹೊಡೆಯುವವರು ಕೊಳ್ಳೆಗೆ
ಈಡಾಗುವರು.
17 ‘ಇಗೋ, ಸಿಯೋನ್ ಯಾರಿಗೂ
ಬೇಡವಾದವಳು, ಭ್ರಷ್ಟಳಾದಳು’
ಎಂದು ಜನರು ನಿನ್ನನ್ನು ಜರೆವುದು ನನಗೆ

ಹಿಡಿಸದು.
ನಿನ್ನನ್ನು ಗುಣಪಡಿಸುವೆನು
ನಿನ್ನ ಗಾಯಗಳನ್ನು ವಾಸಿಮಾಡುವೆನು
– ಇದು ಸರ್ವೇಶ್ವರನಾದ ನನ್ನ ನುಡಿ.
18 ಯಕೋಬನ ಮನೆಗಳ ದುರವಸ್ಥೆಯನ್ನು
ತಪ್ಪಿಸುವೆನು
ಜೆರುಸಲೇಮಿನ ನಿವಾಸಗಳನ್ನು ನಿಶ್ಚಯವಾಗಿ
ಕರುಣಿಸುವೆನು.
ಅದರ ಹಾಳುದಿಬ್ಬಗಳ ಮೇಲೆ ಹೊಸನಗರ
ಕಟ್ಟುವೆನು
ಅದರ ಅರಮನೆ ಮೊದಲಿದ್ದ ಸ್ಥಳದಲ್ಲೆ
ನೆಲೆಯಾಗಿ ನಿಲ್ಲುವುದು.
19 ಅವುಗಳಿಂದ ಸ್ತುತಿಸ್ತೋತ್ರ ಕೇಳಿಬರುವುದು
ಅಲ್ಲಿಂದ ನಲಿವುನಾದ ಕೇಳಿಸುವುದು.
ಆ ಜನರನ್ನು ಹೆಚ್ಚಿಸುವೆನು, ಅವರು
ಕೊಂಚವಾಗಿರರು.
ಅವರನ್ನು ಘನಪಡಿಸುವೆನು, ಅವರು
ಹೀನರಾಗಿರರು.
20 ಅವನ ಸಂತಾನ ಹಿಂದಿನ ಸುಸ್ಥಿತಿಯನ್ನು
ಹೊಂದುವುದು
ಅವರ ಸಮಾಜ ನನ್ನ ಮುಂದೆ ನೆಲೆಯಾಗಿ
ನಿಲ್ಲುವುದು
ಅವರನ್ನು ಬಾಧಿಸುವವರನ್ನೆಲ್ಲ ನಾನು
ದಂಡಿಸುವೆನು.
21 ಅವರಲ್ಲೇ ಒಬ್ಬನು ಅವರಿಗೆ ಪ್ರಭುವಾಗುವನು
ಅವರ ವಂಶದವನೇ ಅವರನ್ನು ಆಳುವನು.
ಅವನನ್ನು ನಾನು ನನ್ನ ಹತ್ತಿರ
ಬರಗೊಡಿಸುವೆನು
ಅವನು ನನ್ನ ಸನ್ನಿಧಾನಕ್ಕೆ ಸೇರುವನು.
ಇಲ್ಲದಿದ್ದಲ್ಲಿ, ನನ್ನನು ಸಮೀಪಿಸಲು
ಧೈರ್ಯಗೊಳ್ಳುವವನಾರು?
– ಇದು ಸರ್ವೇಶ್ವರನಾದ ನನ್ನ ನುಡಿ.
22 ನೀವು ನನಗೆ ಪ್ರಜೆಯಾಗಿರುವಿರಿ
ನಾನು ನಿಮಗೆ ದೇವರಾಗಿರುವೆನು.
23 ಇಗೋ, ಹೊರಟಿದೆ ಬಡಿದುಕೊಂಡು
ಹೋಗುವ ಗಾಳಿ
ಸರ್ವೇಶ್ವರನ ರೋಷವೆಂಬ ಬಿರುಗಾಳಿ
ದುರುಳರ ತಲೆಯ ಮೇಲೆ ಬಡಿದೋಡುವ
ಸುಂಟರ ಗಾಳಿ !
24 ಆತನ ಮನದಾಲೋಚನೆಗಳನ್ನು ನಡೆಸಿ

ನೆರವೇರಿಸುವ ತನಕ
ಹಿಂದಿರುಗದು ಆತನ ರೋಷವೆಂಬಾ
ಬಿರುಗಾಳಿ,
ಇದನ್ನು ನೀವು ಗ್ರಹಿಸುವಿರಿ ಕಟ್ಟಕಡೆಯ
ದಿನಗಳಲ್ಲಿ.

### ಹಿಂದಿರುಗಿ ಬರಲಿದೆ ಇಸ್ರಯೇಲ್

**31** ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: "ಕಾಲ ಬರಲಿದೆ, ಆಗ ಇಸ್ರಯೇಲಿನ ಸಕಲ ಗೋತ್ರಗಳಿಗೆ ನಾನೇ
ದೇವರಾಗಿರುವೆನು. ಅವರು ನನಗೆ ಪ್ರಜೆಯಾಗಿರುವರು. 2ಇದು ಸರ್ವೇಶ್ವರನಾದ ನನ್ನ ನುಡಿ. ಅಳಿದುಳಿದಾ
ಜನಕ್ಕೆ ಅರಣ್ಯದಲ್ಲಿ ದಯೆ ದೊರೆಯಿತು. ಇಸ್ರಯೇಲ್ ಶಾಂತಿಯನ್ನು ಅರಸುತ್ತಾ ಹೋಗುವಾಗ
3ಸರ್ವೇಶ್ವರನಾದ ನಾನು ದೂರದಿಂದ ಅದಕ್ಕೆ ದರ್ಶನಕೊಟ್ಟು: 'ನಾನು ನಿನ್ನನ್ನು ಪ್ರೀತಿಸುವುದು ಶಾಶ್ವತ
ಪ್ರೇಮದಿಂದ. ಈ ಕಾರಣದಿಂದ ನಿನ್ನನ್ನು ಆಕರ್ಷಿಸಿಕೊಂಡಿದ್ದೇನೆ ಅಚಲ ಪ್ರೇಮದಿಂದ. 4ಇಸ್ರಯೇಲೆಂಬ
ಯುವತಿಯೇ, ನಿನ್ನ ಪಾಳು ಬಿದ್ದ ಪ್ರದೇಶಗಳನ್ನು ನಾನು ಪುನಃ ಕಟ್ಟುವೆನು, ಅವು ಕಟ್ಟಡಗಳಿಂದ
ಕೂಡಿರುವುವು. ನೀನು, ಮತ್ತೆ ತಾಳಮೇಳಗಳನ್ನು ತೆಗೆದುಕೊಂಡು ನಲಿದಾಡುವವರ ನಾಟ್ಯಗಳಲ್ಲಿ
ಭಾಗವಹಿಸುವೆ. 5ಸಮಾರಿಯದ ಗುಡ್ಡಗಳಲ್ಲಿ ಮರಳಿ ದ್ರಾಕ್ಷಾ ತೋಟಗಳನ್ನು ಮಾಡಿಕೊಳ್ಳುವೆ. ನೆಡುವವರೇ
ನೆಟ್ಟ ಫಲಗಳನ್ನು ಸವಿಯುವರು. 6ಹೌದು, ದಿನ ಬರುವುದು. ಆಗ ಕಾವಲುಗಾರರು ಎಫ್ರಯಿಮಿನ ಗುಡ್ಡಗಳ
ಮೇಲೆ ನಿಂತು, 'ಎದ್ದೇಳಿ, ಹೋಗೋಣ. ಬನ್ನಿ ಸಿಯೋನಿಗೆ, ನಮ್ಮ ದೇವರಾದ ಸರ್ವೇಶ್ವರನ ಸನ್ನಿಧಾನಕ್ಕೆ'
ಎಂದು ಕೂಗಿ ಕರೆನೀಡುವರು."

7 ಸರ್ವೇಶ್ವರ ಹೀಗೆನ್ನುತ್ತಾರೆ:
"ಯಕೋಬನನ್ನು ಕುರಿತು ಹರ್ಷಧ್ವನಿಗೈಯಿರಿ
ಜನಾಂಗಗಳಾ ಶಿರೋಮಣಿಗೆ ಜೈಕಾರ
ಮಾಡಿರಿ.
'ಸರ್ವೇಶ್ವರ ಅಳಿದುಳಿದಾ ಇಸ್ರಯೇಲರನ್ನು
ರಕ್ಷಿಸಿಹನು'
ಎಂದು ಘೋಷಿಸುತ್ತಾ ಸ್ತುತಿಸಿರಿ.
8 ಇಗೋ ನೋಡು,
ಅವರನ್ನು ಬರಮಾಡುವೆನು ಉತ್ತರ ದೇಶದಿಂದ
ಅವರನ್ನು ಒಂದುಗೂಡಿಸುವೆನು
ದಿಗಂತಗಳಿಂದ.
ಅವರೊಡನೆ ಕುರುಡರನ್ನೂ ಕುಂಟರನ್ನೂ
ಗರ್ಭಿಣಿಯರನ್ನೂ ದಿನತುಂಬಿದ
ಬಸುರಿಯರನ್ನೂ ಒಟ್ಟಿಗೆ ಕರೆತರುವೆನು.
ಅವರು ದೊಡ್ಡ ಗುಂಪಾಗಿ ಇಲ್ಲಿಗೆ
ಹಿಂದಿರುಗುವರು.
9 ಕಣ್ಣೀರಿಡುತ್ತಾ ಹೋದವರು ಹಿಂದಿರುಗಿ
ಬರುವರು.
ಪ್ರಾರ್ಥಿಸುತ್ತಾ ಅವರು ಮುನ್ನಡೆಯುವಂತೆ
ಮಾಡುವೆನು
ಎಡವಲಾಗದ ಸಮಮಾರ್ಗದಲ್ಲಿ ಅವರನ್ನು

ನಡೆಸುವೆನು
ತುಂಬಿದ ತೊರೆಯ ಬಳಿಗೆ ಬರಮಾಡುವೆನು.
10 ರಾಷ್ಟ್ರಗಳೇ, ಸರ್ವೇಶ್ವರನ ವಾಕ್ಯವನ್ನು
ಕೇಳಿರಿ:
ದೂರದ ದ್ವೀಪಗಳಲ್ಲೂ ಅದನ್ನು ಸಾರಿರಿ:
ಇಸ್ರಯೇಲರನ್ನು ಚದುರಿಸಿದಾತ
ಕುರಿಮಂದೆಯನ್ನು ಕಾಯುವ ಕುರುಬನಂತೆ
ಅವರನ್ನು ಕೂಡಿಸಿ ಕಾಪಾಡುವನೆಂದು
ಪ್ರಕಟಿಸಿರಿ.
11 ಸರ್ವೇಶ್ವರ ಯಕೋಬರ ವಿಮೋಚಕ
ಅವರನ್ನು ಅವರಿಗಿಂತ ಬಲಿಷ್ಠರ ಕೈಯಿಂದ
ಬಿಡಿಸಿದಾತ.
12 ಅವರು ಬಂದು ಹಾಡುವರು ಸಿಯೋನ್
ಶಿಖರದಲ್ಲಿ
ಬರುವರು ಪ್ರವಾಹ ಪ್ರವಾಹವಾಗಿ
ಧಾನ್ಯ, ದ್ರಾಕ್ಷಾರಸ, ಎಣ್ಣೆ, ಕುರಿ, ಕುರಿಮರಿ,
ಸರ್ವೇಶ್ವರನ ಈ ವರದಾನಗಳನ್ನು
ಅನುಭವಿಸಲಿಕ್ಕಾಗಿ.
ಹದವಾಗಿ ನೀರುಹಾಯಿಸಿದ
ಉದ್ಯಾನವನದಂತೆ ಅವರ ಜೀವನ
ಇನ್ನು ಅವರಿಗಿರದು ವ್ಯಸನ.
13 ಆಗ ನಾಟ್ಯವಾಡಿ ನಲಿವಳು ಯುವತಿ
ಹರ್ಷಿಸುವರು ಯುವಕರು ಮುದುಕರು
ಜೊತೆಯಾಗಿ.
ಅವರ ದುಃಖವನ್ನು ಸಂತೋಷವಾಗಿಸುವೆನು
ವ್ಯಸನ ತೊರೆದು ಆನಂದಿಸುವಂತೆ ಅವರನ್ನು
ಸಂತೈಸುವೆನು.
14 ಯಾಜಕರನ್ನು ಮೃಷ್ಟಾನ್ನದಿಂದ
ತೃಪ್ತಿಪಡಿಸುವೆನು
ನನ್ನ ಜನ ಸವಿಯುವರು ಯಥೇಚ್ಛವಾಗಿ ನನ್ನ
ವರದಾನಗಳನ್ನು.
ಇದು ಸರ್ವೇಶ್ವರನಾದ ನನ್ನ ನುಡಿ.”

**ಸರ್ವೇಶ್ವರನ ಕರುಣೆ ಇಸ್ರಯೇಲಿನ ಮೇಲೆ**

15 ಸರ್ವೇಶ್ವರ ಹೀಗೆನ್ನುತ್ತಾರೆ:
“ಕೇಳಿ ಬರುತ್ತಿದೆ ರಾಮಾ ಊರಿನೊಳು
ರೋದನ
ಗೋಳಾಟ, ಅಘೋರ ಆಕ್ರಂದನ.
ಕಳೆದುಕೊಂಡ ಮಕ್ಕಳಿಗಾಗಿ ಗೋಳಾಡುತ್ತಿಹಳು
ರಾಖೇಲಳು

ಇನ್ನಿಲ್ಲದ ಅವುಗಳಿಗಾಗಿ ಉಪಶಮನ
ಒಲ್ಲೆನೆನುತಿಹಳು."
16 ಸರ್ವೇಶ್ವರ ಹೀಗೆನ್ನುತ್ತಾರೆ:
"ನಿಲ್ಲಿಸು ನಿನ್ನ ಗೋಳಾಟವನ್ನು
ಒರಸು ನಿನ್ನ ಕಣ್ಗಳಿಂದ ನೀರನ್ನು.
ನಿನ್ನ ಪ್ರಯಾಸ ಸಾರ್ಥಕವಾಗುವುದು
ಶತ್ರುವಿನ ದೇಶದಿಂದ ನಿನ್ನ ಮಕ್ಕಳು
ಹಿಂದಿರುಗುವರು.
ಸರ್ವೇಶ್ವರನಾದ ನನ್ನ ನುಡಿ ಇದು."
17 ಸರ್ವೇಶ್ವರ ಇಂತೆನ್ನುತ್ತಾರೆ:
"ನಿನ್ನ ಭವಿಷ್ಯದ ಬಗ್ಗೆ ಭರವಸೆಯಿಂದಿರು
ನಿನ್ನ ಮಕ್ಕಳು ಹಿಂದಿರುಗಿ ಸ್ವದೇಶ ಸೇರುವರು.
18 ಎಫ್ರಯಿಮನ ಈ ಪ್ರಲಾಪ ನನ್ನ ಕಿವಿಗೆ ಬಿದ್ದಿದೆ:
'ನೀನು ನನಗೆ ಶಿಕ್ಷೆ ವಿಧಿಸಿದೆ
ಪಳಗದ ಹೋರಿಯಂತೆ ನಾನು ಆ ಶಿಕ್ಷೆಯನ್ನು
ಅನುಭವಿಸಿದೆ.
ನೀನು ನನ್ನನ್ನು ತಿರುಗಿಸು,
ನೀ ತಿರುಗಿಸಿದ ಹಾಗೆ ನಾನು ತಿರುಗುವೆ.
ನೀನೆ ನನ್ನ ದೇವರಾದ ಸರ್ವೇಶ್ವರನಲ್ಲವೆ?
19 ತಿರುಗಿಸಲ್ಪಟ್ಟ ಮೇಲೆಯೆ ನಾನು ಪಶ್ಚಾತ್ತಾಪ
ಪಟ್ಟೆ
ತಿಳುವಳಿಕೆ ಹೊಂದಿದ ಮೇಲೆಯೆ
ಕೆನ್ನೆಗೆ ಹಾಕಿಕೊಂಡೆ
ನನ್ನ ಯೌವನ ನಡತೆ ನನಗೆ ಅವಮಾನದ
ಹೊರೆ
ಈ ಕಾರಣ ಲಜ್ಜೆಗೊಂಡೆ.
ಹೌದು, ನಾಚಿಕೆಯಿಂದ ತಲೆತಗ್ಗಿಸಿದೆ'."
20 ಸರ್ವೇಶ್ವರ ಹೀಗೆನ್ನುತ್ತಾರೆ:
"ಎಫ್ರಯಿಮ್, ನನಗೆ ಪ್ರಿಯ ಪುತ್ರನಲ್ಲವೆ?
ನನ್ನ ಮುದ್ದು ಮಗನಲ್ಲವೆ?
ಅವನ ವಿರುದ್ಧ ನಾನು ಪದೇ ಪದೇ
ಮಾತಾಡಿದ್ದರೂ
ನನ್ನ ಜ್ಞಾಪಕಕ್ಕೆ ಬರುತ್ತಲೇ ಇರುತ್ತಾನೆ.
ಅವನಿಗಾಗಿ ನನ್ನ ಕರುಳು ಮರುಗುತ್ತದೆ.
ಅವನನ್ನು ನಿಶ್ಚಯವಾಗಿ ಕರುಣಿಸುವೆನು."
21 "ದಾರಿತೋರುವ ಕಂಬಗಳನ್ನೂ
ಕೈಮರಗಳನ್ನೂ ನಿಲ್ಲಿಸಿಕೊ
ನೀನು ಯಾವ ಮಾರ್ಗವಾಗಿ ಹೋದೆಯೋ
ಆ ಮಾರ್ಗವನ್ನು ನೆನೆಸಿಕೊ.
ಇಸ್ರಯೇಲೆಂಬ ಯುವತಿಯೇ ಹಿಂದಿರುಗು

ಈ ನಿನ್ನ ನಗರಕ್ಕೆ ಹಿಂದಿರುಗು.
22 “ನಂಬಿಕೆದ್ರೋಹಿಯಾದ ಕುವರಿಯೇ,
ಎಂದಿನವರೆಗೆ ಅತ್ತಿತ್ತ ಅಲೆದಾಡುತ್ತಿರುವೆ?
ಸರ್ವೇಶ್ವರನಾದ ನಾನು
ಅಪೂರ್ವವಾದುದನ್ನು ಉಂಟಾಗಿಸಿರುವೆ:
ಇಗೋ, ಸ್ತ್ರೀಯಾದವಳು ತನ್ನ ಪುರುಷನನ್ನು
ಕಾಪಾಡುವಳು.”

## ದೈವಪ್ರಜೆಯ ಮುಂದಿನ ಸೌಭಾಗ್ಯ

23 ಇಸ್ರಯೇಲಿನ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರನ ನುಡಿ ಹೀಗಿದೆ: “ನಾನು ನನ್ನ ಜನರ ಗುಲಾಮಗಿರಿಯನ್ನು ನೀಗಿಸುವೆನು. ಆಗ, ‘ನ್ಯಾಯದ ನಿವಾಸವೇ, ಪರಿಶುದ್ಧ ಪರ್ವತವೇ, ಸರ್ವೇಶ್ವರ ನಿನ್ನನ್ನು ಆಶೀರ್ವದಿಸಲಿ’ ಎಂಬ ಮಾತು ಜುದೇಯ ನಾಡಿನಲ್ಲೂ ಅದರ ನಗರಗಳಲ್ಲೂ ಮತ್ತೆ ಕೇಳಿಬರುವುದು.
24ಜುದೇಯದಲ್ಲೂ ಅದರ ನಗರಗಳಲ್ಲೂ ಜನರು ಒಂದುಗೂಡಿ ಬಾಳುವರು. ವ್ಯವಸಾಯಗಾರರು, ಮುಂದೆ ಮೇಯಿಸುವವರು ಹಾಗೂ ಯೆಹೂದ್ಯರೆಲ್ಲರು ಒಟ್ಟಿಗೆ ವಾಸಿಸುವರು.
25ಬಳಲಿ ಬೆಂಡಾದವರೆಲ್ಲರನ್ನು ತಣಿಸುವೆನು ಹಾಗೂ ತೃಪ್ತಿಪಡಿಸುವೆನು.”
26 ‘ಆಗ ನಾನು ನೋಡಿದೆ ಎಚ್ಚೆತ್ತು
ನನ್ನ ಕನಸು ನನಗೆ ಮನೋಹರವಾಗಿತ್ತು.’

27 “ಸರ್ವೇಶ್ವರನಾದ ನಾನು ನಿಮಗೆ ಹೇಳುವುದೇನೆಂದರೆ: ಇಗೋ, ಇಸ್ರಯೇಲ್ ಮತ್ತು ಜುದೇಯ ಕ್ಷೇತ್ರಗಳಲ್ಲಿ ನಾನು ಮನುಷ್ಯರನ್ನೂ ಪ್ರಾಣಿಗಳನ್ನೂ ಬಿತ್ತಿ ಭರ್ತಿ ಮಾಡುವ ದಿನಗಳು ಬರುವುವು.
28ಅವರನ್ನು ಕೀಳಲು ಕೆಡವಲು, ಅಳಿಸಲು ಹಾಳುಮಾಡಲು, ಈ ಮೊದಲು ಎಚ್ಚರ ವಹಿಸಿದ ಹಾಗೆಯೆ ಇನ್ನು ಮುಂದೆ ಅವರನ್ನು ಕಟ್ಟಲು ಹಾಗು ನೆಡಲು ಎಚ್ಚರವಹಿಸುವೆನು. ಇದು ಸರ್ವೇಶ್ವರನಾದ ನನ್ನ ನುಡಿ.
29ಆ ಕಾಲ ಬಂದಾಗ ಜನರು, ‘ಹೆತ್ತವರು ಹುಳಿದ್ರಾಕ್ಷೆಯನ್ನು ತಿಂದರು. ಆದರೆ ಮಕ್ಕಳ ಹಲ್ಲುಗಳು ಚಳಿತು ಹೋದವು’ ಎಂದು ಹೇಳರು. 30ಏಕೆಂದರೆ ಸಾಯತಕ್ಕವನು ತನ್ನ ಸ್ವಂತ ದೋಷಕ್ಕಾಗಿಯೇ ಸಾಯುವನು. ಹುಳಿದ್ರಾಕ್ಷೆಯನ್ನು ತಿಂದವನ ಹಲ್ಲೇ ಚಳಿತು ಹೋಗುವುದು.”

31 ಸರ್ವೇಶ್ವರ ಹೇಳುವುದನ್ನು ಕೇಳಿ: “ನಾನು ಇಸ್ರಯೇಲ್ ವಂಶದವರೊಂದಿಗೂ ಯೆಹೂದ ವಂಶದವರೊಂದಿಗೂ ಒಂದು ಒಡಂಬಡಿಕೆಯನ್ನು ಮಾಡಿಕೊಳ್ಳುವ ದಿನಗಳು ಬರುವುವು. 32ಈ ಒಡಂಬಡಿಕೆ, ನಾನು ಅವರ ಪೂರ್ವಜರನ್ನು ಕೈ ಹಿಡಿದು ಈಜಿಪ್ಟಿನಿಂದ ಕರೆದು ತಂದಾಗ ಅವರೊಡನೆ ಮಾಡಿಕೊಂಡ ಒಡಂಬಡಿಕೆ ಅಂಥದಾಗಿ ಇರುವುದಿಲ್ಲ. ನಾನು ಅವರಿಗೆ ಯಜಮಾನನಾಗಿ ಇದ್ದರೂ ಆ ನನ್ನ ಒಡಂಬಡಿಕೆಯನ್ನು ಅವರು ಮೀರಿನಡೆದರು. 33ಸರ್ವೇಶ್ವರನಾದ ನಾನು ಹೇಳುತ್ತೇನೆ ಕೇಳಿ: ಆ ದಿನಗಳು ಬಂದಮೇಲೆ ನಾನು ಇಸ್ರಯೇಲ್ ವಂಶದವರೊಂದಿಗೆ ಮಾಡಿಕೊಳ್ಳುವ ಒಡಂಬಡಿಕೆ ಹೀಗಿರುವುದು – ನನ್ನ ಧರ್ಮಶಾಸ್ತ್ರವನ್ನು ಅವರ ಅಂತರಂಗದಲ್ಲಿ ಇಡುವೆನು. ಅವರ ಹೃದಯದ ಹಲಗೆಯ ಮೇಲೆ ಬರೆಯುವೆನು. ನಾನು ಅವರಿಗೆ ದೇವರಾಗಿರುವೆನು, ಅವರು ನನಗೆ ಪ್ರಜೆಯಾಗಿರುವರು.
34ಒಬ್ಬನು ತನ್ನ ನೆರೆಹೊರೆಯವರನ್ನು ಕುರಿತು ಅಥವಾ ಅಣ್ಣ ತಮ್ಮಂದಿರನ್ನು ಕುರಿತು, ‘ಸರ್ವೇಶ್ವರನನ್ನು ಅರಿತುಕೊ’ ಎಂದು ಬೋಧಿಸಬೇಕಾಗಿರುವುದಿಲ್ಲ. ಚಿಕ್ಕವರಿಂದ ಮೊದಲ್ಗೊಂಡು ದೊಡ್ಡವರ ತನಕ ಎಲ್ಲರು ನನ್ನನ್ನು ಅರಿತುಕೊಳ್ಳುವರು. ನಾನು ಅವರ ಅಪರಾಧವನ್ನು ಕ್ಷಮಿಸಿ, ಅವರ ಪಾಪವನ್ನು ಎಂದಿಗೂ ನೆನಪಿಗೆ ತಂದುಕೊಳ್ಳುವುದಿಲ್ಲ. ಇದು ಸರ್ವೇಶ್ವರನಾದ ನನ್ನ ನುಡಿ.”

## ಇಸ್ರಯೇಲಿನ ಮುನ್ನಡೆ

35 ಸರ್ವೇಶ್ವರನು, ಹಗಲಲ್ಲಿ ಬೆಳಕು ನೀಡಲು
ಸೂರ್ಯನನ್ನು ನೇಮಿಸಿದಾತ.

ಇರುಳಲ್ಲಿ ಬೆಳಕು ನೀಡಲು
ಚಂದ್ರ ನಕ್ಷತ್ರಗಳನ್ನು ಏರ್ಪಡಿಸಿದಾತ.
ಅಲೆಗಳು ಭೋರ್ಗರೆವಷ್ಟು ಸಮುದ್ರವನ್ನು
ಕೆರಳಿಸುವಾತ
‘ಸೇನಾಧೀಶ್ವರ ಸರ್ವೇಶ್ವರ’ ಎಂಬ
ನಾಮಧೇಯದಿಂದ ಪ್ರಸಿದ್ಧನಾತ.
36 ಆತನ ಮಾತು ಇವು–
ಈ ಪ್ರಕೃತಿ ನಿಯಮ ನನ್ನ ಪರಾಂಬರಿಕೆಯಲ್ಲಿ
ಇರುವತನಕ
ಒಂದು ರಾಷ್ಟ್ರವಾಗಿ ಉಳಿವುದು ಇಸ್ರಯೇಲ್
ಸಂತಾನ.
37 ಮೇಲಿನ ಆಕಾಶ ಮಂಡಲವನ್ನು
ಅಳೆಯಬಹುದಾದರೆ
ಕೆಳಗಿನ ಭೂಮಂಡಲದ ವಿಸ್ತಾರವನ್ನು
ಪರೀಕ್ಷಿಸಬಹುದಾದರೆ
ಆಗ ಮಾತ್ರ ಅದರ ದುಷ್ಕೃತ್ಯಗಳನ್ನು
ಮುನ್ನಿಟ್ಟು
ಇಸ್ರಯೇಲ್ ವಂಶವನ್ನು ನಾನು ನಿರಾಕರಿಸಿ
ಬಿಡಲು ಸಾಧ್ಯ.

**ಜೆರುಸಲೇಮಿನ ನಿರ್ಮಾಣ**

30 ಸರ್ವೇಶ್ವರ ಹೀಗೆನ್ನುತ್ತಾರೆ: “ಇಗೋ ಕಾಲ ಬರಲಿದೆ. ಆಗ ಸರ್ವೇಶ್ವರನಾದ ನನ್ನ ಮಹಿಮೆಗಾಗಿ
ಈ ನಗರವನ್ನು ಹನನೇಲನ ಗೋಪುರದಿಂದ ಮೂಲೆ ಬಾಗಿಲವರೆಗೆ ವಿಸ್ತರಿಸಲಾಗುವುದು. 39ಅದರ ಎಲ್ಲೆ
ಇನ್ನು ಮೇಲೆ ಗಾರೇಬ್ ಗುಡ್ಡದತನಕ ನೆಟ್ಟಗೆ ಹೋಗಿ ಗೋಯದ ಕಡೆಗೆ ತಿರುಗುವುದು. 40ಹಣ ಹೂಣುವ,
ಬೂದಿತುಂಬುವ ಕಣಿವೆಯಿಂದ, ಕಿದ್ರೋನ್ ಹಳ್ಳ, ಪೂರ್ವದಿಕ್ಕಿನ ಕುದುರೆ ಬಾಗಿಲ ಮೂಲೆ,
ಇವುಗಳವರೆಗಿರುವ ಪ್ರದೇಶವೆಲ್ಲ ಸರ್ವೇಶ್ವರನಿಗೆ ಪರಿಶುದ್ಧ ಸ್ಥಾನವಾಗುವುದು. ಈ ನಗರ ಇನ್ನೆಂದಿಗೂ
ನಿರ್ಮೂಲವಾಗದು, ನಾಶವಾಗದು.”

**ಸೂಚನೆಗಾಗಿ ಹೊಸ ಕೊಂಡುಕೊಂಡ ಯೆರೆಮೀಯ**

**32** ಜುದೇಯದ ಅರಸನಾದ ಚಿದ್ಕೀಯನ ಆಳ್ವಿಕೆಯ ಹತ್ತನೇ ವರ್ಷದಲ್ಲಿ, ಅಂದರೆ ನೆಬೂಕದ್ನೆಚ್ಚರನ
ಆಳ್ವಿಕೆಯ ಹದಿನೆಂಟನೆಯ ವರ್ಷದಲ್ಲಿ ಸರ್ವೇಶ್ವರಸ್ವಾಮಿ ಯೆರೆಮೀಯನಿಗೆ ತಮ್ಮ ವಾಕ್ಯವನ್ನು
ದಯಪಾಲಿಸಿದರು. 2ಆ ಸಮಯದಲ್ಲಿ ಬಾಬಿಲೋನಿಯದ ಅರಸನ ಸೈನ್ಯ ಜೆರುಸಲೇಮನ್ನು ಮುತ್ತಿತ್ತು.
ಪ್ರವಾದಿ ಯೆರೆಮೀಯನು ಜುದೇಯದ ರಾಜನ ಮನೆಗೆ ಸೇರಿದ ಕಾರಾಗೃಹದಲ್ಲಿ ಸೆರೆಯಾಗಿದ್ದನು.
3ಜುದೇಯದ ಅರಸ ಚಿದ್ಕೀಯನು ಯೆರೆಮೀಯನಿಗೆ, “ನೀನು ಪ್ರವಾದನೆ ಮಾಡುತ್ತಾ, ‘ಸರ್ವೇಶ್ವರನೇ
ಹೀಗೆಂದಿದ್ದಾರೆ: ನಾನು ಈ ನಗರವನ್ನು ಬಾಬಿಲೋನಿಯದ ಅರಸನ ಕೈಗೆ ಸಿಕ್ಕಿಸುವೆನು. ಅವನು ಇದನ್ನು
ಆಕ್ರಮಿಸುವನು. 4ಈ ಜುದೇಯದ ಅರಸ ಚಿದ್ಕೀಯನು ಬಾಬಿಲೋನಿಯರ ಕೈಯಿಂದ ತಪ್ಪಿಸಿಕೊಳ್ಳಲಾಗದೆ
ಅದರ ಅರಸನ ವಶವಾಗುವುದು ಖಂಡಿತ. ಅವನ ಮುಂದೆ ಸಾಕ್ಷಾತ್ತಾಗಿ ನಿಂತು ಮುಖಾಮುಖಿಯಾಗಿ
ಮಾತಾಡುವನು. 5ಆ ಅರಸನು ಚಿದ್ಕೀಯನನ್ನು ಬಾಬಿಲೋನಿಗೆ ಕೊಂಡು ಒಯ್ಯುವನು. ನಾನು ಅವನಿಗೆ
ದಯೆತೋರುವ ತನಕ ಅಲ್ಲೇ ಇರುವನು. ನೀವು ಬಾಬಿಲೋನಿಯರೊಡನೆ ಯುದ್ಧ ಮಾಡಿದರೂ

ಜಯವಾಗದು. ಇದು ಸರ್ವೇಶ್ವರನ ನುಡಿ’ ಎಂದು ಹೇಳುತ್ತಿರುವೆ, ಏಕೆ?” ಎಂದು ಆಪಾದಿಸಿ ಸೆರೆಯಲ್ಲಿ ಇಟ್ಟಿದ್ದನು.

6 ಯೆರೆಮೀಯನು ಆಗ ತಿಳಿಸಿದ್ದು ಇದು: ಸರ್ವೇಶ್ವರನು ನನಗೆ ಈ ವಾಕ್ಯವನ್ನು ದಯಪಾಲಿಸಿದರು
– 7“ಇಗೋ, ನಿನ್ನ ಚಿಕ್ಕಪ್ಪನಾದ ಶಲ್ಲೂಮನು ನಿನ್ನ ಬಳಿಗೆ ಬಂದು – ‘ಅನಾತೋತಿನಲ್ಲಿರುವ ನನ್ನ ಹೊಲವನ್ನು ಕೊಂಡುಕೊ. ಪರರ ಪಾಲಾಗದಂತೆ ಅದನ್ನು ಕೊಂಡುಕೊಳ್ಳುವ ಹಕ್ಕು ನಿನಗಿದೆ,’ – ಎಂದು ಹೇಳುವನು.” 8ಸರ್ವೇಶ್ವರನ ಈ ವಾಕ್ಯಾನುಸಾರ ನನ್ನ ಚಿಕ್ಕಪ್ಪನ ಮಗ ಹನಮೇಲನು ಕಾರಾಗೃಹದ ಅಂಗಳದಲ್ಲಿ ಇದ್ದ ನನ್ನ ಬಳಿಗೆ ಬಂದು, ‘ಬೆನ್ಯಾಮಿನ್ ನಾಡಿನ ಅನಾತೋತಿನಲ್ಲಿರುವ ನನ್ನ ಹೊಲವನ್ನು ದಯಮಾಡಿ ಕೊಂಡುಕೋ. ಅದಕ್ಕೆ ನೀನೆ ಬಾಧ್ಯನು, ನಿನಗಾಗಿಯೇ ಕೊಂಡುಕೊ’ ಎಂದು ಕೇಳಿಕೊಂಡನು. ಕೂಡಲೆ ಇದು ಸರ್ವೇಶ್ವರನ ನುಡಿ ಎಂದು ನನಗೆ ಗೊತ್ತಾಯಿತು. 9ನನ್ನ ಚಿಕ್ಕಪ್ಪನ ಮಗ ಹನಮೇಲನಿಂದ ಅನಾತೋತಿನಲ್ಲಿರುವ ಆ ಹೊಲವನ್ನು ಕೊಂಡುಕೊಂಡೆ. ಅದರ ಕ್ರಯವಾಗಿ ಹದಿನೇಳು ತೊಲ ಬೆಳ್ಳಿಯನ್ನು ತೂಕಮಾಡಿ ಅವನಿಗೆ ಕೊಟ್ಟೆ. 10ಪತ್ರಕ್ಕೆ ರುಜುಹಾಕಿ, ಮುದ್ರೆ ಒತ್ತಿ, ಸಾಕ್ಷಿಗಳನ್ನು ಹಾಕಿಸಿ, ತಕ್ಕಡಿಯಲ್ಲಿ ಆ ಬೆಳ್ಳಿಯನ್ನು ತೂಗಿ ಅವನಿಗೆ ಕೊಟ್ಟೆ. 11ಆಮೇಲೆ ನಾನು ಕ್ರಯಪತ್ರವನ್ನು, ಅಂದರೆ ಚಕ್ಕುಬಂದಿ ಷರತ್ತುಗಳಿಂದ ಕೂಡಿ ಮುದ್ರಿತವಾದ ಪತ್ರವನ್ನೂ ಮುಚ್ಚಳಿಕೆಯ ಪತ್ರವನ್ನೂ ತೆಗೆದುಕೊಂಡು 12ಮಹ್ಸೇಮನ ಮೊಮ್ಮಗನೂ ನೇರೀಯನ ಮಗನೂ ಆದ ಬಾರೂಕನ ಕೈಗೆ ಕೊಟ್ಟೆ. ನನ್ನ ಚಿಕ್ಕಪ್ಪನ ಮಗ ಹನಮೇಲನ ಮುಂದೆ ಕ್ರಯಪತ್ರಕ್ಕೆ ರುಜುಮಾಡಿದ ಸಾಕ್ಷಿಗಳ ಸಮಕ್ಷಮದಲ್ಲಿ, ಕಾರಾಗೃಹದ ಅಂಗಳದಲ್ಲಿ ಕುಳಿತಿದ್ದ ಎಲ್ಲ ಯೆಹೂದ್ಯರ ಎದುರಿನಲ್ಲಿ, ಆ ಕ್ರಯಪತ್ರವನ್ನು ಕೊಟ್ಟೆ. 13ಅವರೆಲ್ಲರ ಮುಂದೆ ಬಾರೂಕನಿಗೆ,
14“ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಹೀಗೆನ್ನುತ್ತಾರೆ: ನೀನು ಈ ಕ್ರಯಪತ್ರಗಳನ್ನು, ಅಂದರೆ ಮುದ್ರಿತ ಪತ್ರವನ್ನೂ ಮುಚ್ಚಳಿಕೆಯ ಪತ್ರವನ್ನೂ ತೆಗೆದುಕೊಂಡು ಒಂದು ಮಡಕೆಯಲ್ಲಿ ಬಚ್ಚಿಡು. ಅದು ಬಹಳ ದಿನ ಸುರಕ್ಷಿತವಾಗಿರಲಿ. 15ಈ ನಾಡಿನಲ್ಲಿ ಜನರು ಮನೆ–ಹೊಲ–ತೋಟಗಳನ್ನು ಮತ್ತೆ ಕೊಳ್ಳುವರು ಹಾಗೂ ಕೊಡುವರು. ಇದು ಇಸ್ರಯೇಲರ ದೇವರೂ ಸರ್ವಶಕ್ತರೂ ಆದ ಸರ್ವೇಶ್ವರನ ನುಡಿ,” ಎಂದು ಸ್ಪಷ್ಟವಾಗಿ ಹೇಳಿದೆ.

### ಯೆರೆಮೀಯನ ಪ್ರಾರ್ಥನೆ

16 ಕ್ರಯಪತ್ರವನ್ನು ನೇರೀಯನ ಮಗ ಬಾರೂಕನ ಕೈಗೆ ಕೊಟ್ಟಮೇಲೆ ನಾನು ಸ್ವಾಮಿಗೆ ಹೀಗೆ ಪ್ರಾರ್ಥನೆ ಮಾಡಿದೆ: 17 “ಸ್ವಾಮಿ ಸರ್ವೇಶ್ವರಾ, ನೀವು ನಿಮ್ಮ ಭುಜಬಲದಿಂದಲೂ ಮಹಾ ಶಕ್ತಿಯಿಂದಲೂ ಭೂಮ್ಯಾಕಾಶಗಳನ್ನು ಸೃಷ್ಟಿಸಿದ್ದೀರಿ. ನಿಮಗೆ ಅಸಾಧ್ಯವಾದ ಕಾರ್ಯ ಯಾವುದೂ ಇಲ್ಲ. 18ನೀವು ಸಾವಿರಾರು ತಲಾಂತರಗಳವರೆಗೂ ದಯೆತೋರುವವರು. ಆದರೆ ಹೆತ್ತವರ ದೋಷಫಲವನ್ನು ಅವರ ತರುವಾಯ ಮಕ್ಕಳ ಮಡಲಿಗೆ ಹಾಕುವವರು. ನೀವು ಮಹಾಪರಾಕ್ರಮಿಯಾದ ದೇವರು, ‘ಸೇನಾಧೀಶ್ವರ ಸರ್ವೇಶ್ವರ’ ಎಂಬುದು ನಿಮ್ಮ ನಾಮಧೇಯ. 19ನೀವು ಆಲೋಚನೆಯಲ್ಲಿ ಶ್ರೇಷ್ಠರು, ಕಾರ್ಯದಲ್ಲಿ ಸಮರ್ಥರು. ನರಮಾನವರ ಮಾರ್ಗಗಳನ್ನೆಲ್ಲ ಕಣ್ಣಾರೆ ನೋಡುವವರು. ಪ್ರತಿಯೊಬ್ಬನಿಗೂ ಅವನವನ ಕೃತ್ಯಗಳಿಗೂ ನಡತೆಗೂ ತಕ್ಕ ಫಲ ಕೊಡುವವರು. 20ಈಜಿಪ್ಟ್ ದೇಶದಲ್ಲಿ ಮಾಡಿದ ಮಹತ್ಕಾರ್ಯಗಳನ್ನೂ ಪವಾಡಗಳನ್ನೂ ಇಸ್ರಯೇಲರಲ್ಲೂ ಇತರ ಜನಾಂಗಗಳಲ್ಲೂ ಈ ದಿನದವರೆಗೂ ಮಾಡಿ ಹೆಸರು ವಾಸಿಯಾದವರು. 21ಆ ಹೆಸರು ಈಗಲೂ ಸುಸ್ಥಿರವಾಗಿದೆ. ನೀವು ಮಹತ್ಕಾರ್ಯಗಳನ್ನೂ ಪವಾಡಗಳನ್ನೂ ನಡೆಸಿ, ಭುಜಪರಾಕ್ರಮವನ್ನು ತೋರ್ಪಡಿಸಿ, ಶಿಕ್ಷಾಹಸ್ತವನ್ನೂ ಪ್ರಯೋಗಿಸಿ, ಮಹಾಭೀತಿಯನ್ನು ಉಂಟುಮಾಡಿ, ನಿಮ್ಮ ಜನರಾದ ಇಸ್ರಯೇಲರನ್ನು ಈಜಿಪ್ಟ್ ದೇಶದಿಂದ ಬರಮಾಡಿದಿರಿ. 22ಅವರ ಪೂರ್ವಜರಿಗೆ ವಾಗ್ದಾನ ಮಾಡಿದ ಪ್ರಕಾರ ಹಾಲೂ ಜೇನೂ ಹರಿಯುವ ಈ ನಾಡನ್ನು ಅವರಿಗೆ ಅನುಗ್ರಹಿಸಿದಿರಿ. 23ಅವರು ಈ ನಾಡನ್ನು ಸೇರಿದರು, ಅದನ್ನು ಅನುಭವಿಸಿದರು. ಆದರೆ ನಿಮ್ಮ ಮಾತಿಗೆ ಕಿವಿಗೊಡಲಿಲ್ಲ. ನಿಮ್ಮ ಧರ್ಮಶಾಸ್ತ್ರದ ಅನುಸಾರ ನಡೆಯಲಿಲ್ಲ. ನೀವು ಆಜ್ಞಾಪಿಸಿದವುಗಳಲ್ಲಿ ಒಂದನ್ನೂ ಮಾಡಲಿಲ್ಲ. ಆದಕಾರಣ ನೀವು ಈ ಕೇಡನ್ನೆಲ್ಲ ಅವರ ಮೇಲೆ ಬರಮಾಡಿದ್ದೀರಿ.

24 “ಇಗೋ, ಮುತ್ತಿಗೆಯ ದಿಬ್ಬಗಳು! ನಗರವನ್ನು ಆಕ್ರಮಿಸಲು ಬಂದುಬಿಟ್ಟಿದ್ದಾರೆ. ಖಡ್ಗ-ಕ್ಷಾಮ-ವ್ಯಾಧಿಗಳಿಂದ ನಗರವು ವಿರೋಧಿಗಳಾದ ಬಾಬಿಲೋನಿಯರ ಕೈ ಹಿಡಿತಕ್ಕೆ ಸಿಕ್ಕಿ ಹೋಗಿದೆ. ನೀವು ನುಡಿದಂತೆ ನೆರವೇರಿದೆ. ನಿಮ್ಮ ಕಣ್ಣಿಗೆ ಎಲ್ಲ ಬಟ್ಟಬಯಲಾಗಿದೆ. 25ದೇವರಾದ ಸರ್ವೇಶ್ವರಾ, ಸಾಕ್ಷಿಗಳನ್ನು ಕರೆಯಿಸಿ, ಕ್ರಯಕೊಟ್ಟು ಹೊಲವನ್ನು ಕೊಂಡುಕೊ ಎಂದು ನೀವು ನನಗೆ ಆಜ್ಞಾಪಿಸಿದಿರಿ. ಆದರೆ ನೋಡಿ, ನಗರವು ಬಾಬಿಲೋನಿಯರ ಕೈವಶವಾಗಲಿದೆ.”

26 ಆಗ ಸರ್ವೇಶ್ವರ ಯೆರೆಮೀಯನಿಗೆ ಈ ಮಾತನ್ನು ದಯಪಾಲಿಸಿದರು: 27“ನೋಡು, ನಾನು
ಸರ್ವೇಶ್ವರ, ನರಪ್ರಾಣಿಗಳಿಗೆ ದೇವರು. ನನಗೆ ಅಸಾಧ್ಯವಾದುದು ಯಾವುದು? 28ಆದಕಾರಣ,
ಸರ್ವೇಶ್ವರನಾದ ನಾನು ಹೇಳುತ್ತೇನೆ, ಕೇಳು: ಈ ನಗರವನ್ನು ಕಸ್ದೀಯರ ವಶಕ್ಕೆ, ಅಂದರೆ ಬಾಬಿಲೋನಿನ
ಅರಸ ನೆಬೂಕದ್ನೆಚ್ಚರನ ಕೈಗೆ ಸಿಕ್ಕಿಸಲಿದ್ದೇನೆ. ಅವನು ಇದನ್ನು ಆಕ್ರಮಿಸುವನು. 29ಈ ನಗರಕ್ಕೆ ಮುತ್ತಿಗೆ
ಹಾಕಲಿರುವ ಬಾಬಿಲೋನಿಯರು ಇದರೊಳಗೆ ನುಗ್ಗಿ ಬೆಂಕಿಯಿಕ್ಕುವರು. ಯಾವ ಮನೆಗಳ ಮಾಳಿಗೆಗಳಲ್ಲಿ
ನನ್ನ ಜನರು ಬಾಳ್‍ದೇವತೆಗೆ ಧೂಪಾರತಿ ಎತ್ತಿದ್ದಾರೋ, ಅನ್ಯದೇವರುಗಳಿಗೆ ಪಾನನೈವೇದ್ಯಗಳನ್ನು
ಅರ್ಪಿಸಿದ್ದಾರೋ, ನನ್ನನ್ನು ಕೆಣಕಿದ್ದಾರೋ, ಆ ಮನೆಗಳಿರುವ ಈ ನಗರವನ್ನು ಸುಟ್ಟುಬಿಡುವರು.
30ಇಸ್ರಯೇಲ್ ವಂಶವೂ ಯೆಹೂದ ವಂಶವೂ ಚಿಕ್ಕಂದಿನಿಂದ ನನ್ನ ಚಿತ್ತಕ್ಕೆ ವಿರುದ್ಧವಾಗಿಯೇ ನಡೆಯುತ್ತಾ
ಬಂದಿದೆ. ಹೌದು, ಇಸ್ರಯೇಲ್ ವಂಶದವರು ತಮ್ಮ ಕೈಕೆಲಸದ ವಿಗ್ರಹಗಳಿಂದ ನನ್ನನ್ನು ರೇಗಿಸುತ್ತಲೇ
ಬಂದಿದ್ದಾರೆ. ಇದು ಸರ್ವೇಶ್ವರನಾದ ನನ್ನ ನುಡಿ. 31ಈ ನಗರವು ಕಟ್ಟಿದಂದಿನಿಂದ ಇಂದಿನವರೆಗೂ ನನ್ನ
ಕೋಪತಾಪಗಳಿಗೆ ಕಾರಣವಾಗಿದೆ. 32ಇದರ ಅರಸರು, ಮಂತ್ರಿಗಳು, ಯಾಜಕರು, ಪ್ರವಾದಿಗಳು,
ಜುದೇಯದ ಪ್ರಜೆಗಳು, ಜೆರುಸಲೇಮಿನ ನಿವಾಸಿಗಳು, ಹೀಗೆ ಎಲ್ಲ ಇಸ್ರಯೇಲರೂ ಯೆಹೂದ್ಯರೂ
ಅಧರ್ಮವನ್ನು ಹೇರಳವಾಗಿ ಮಾಡಿ ನನ್ನನ್ನು ರೇಗಿಸಿದ್ದಾರೆ. ಆದ್ದರಿಂದ ಈ ನಗರವನ್ನು ನನ್ನ ಸನ್ನಿಧಿಯಿಂದ
ತೊಲಗಿಸಬೇಕಾಗಿ ಬಂದಿದೆ. 33ಅವರು ನನಗೆ ಅಭಿಮುಖರಾಗದೆ ಬೆನ್ನುಮಾಡಿದ್ದಾರೆ. ನಾನು ಅವರಿಗೆ
ಎಡೆಬಿಡದೆ ಬೋಧಿಸುತ್ತಾ ಬಂದರೂ ನನ್ನ ಉಪದೇಶವನ್ನು ಅಂಗೀಕರಿಸಲಿಲ್ಲ, ನನಗೆ ಕಿವಿಗೊಡಲೂ ಇಲ್ಲ.
34ನನ್ನ ಹೆಸರಿನಿಂದ ಪ್ರಖ್ಯಾತವಾಗಿರುವ ದೇವಾಲಯದಲ್ಲಿ ತಮ್ಮ ಅಸಹ್ಯ ವಸ್ತುಗಳನ್ನು ಇಟ್ಟು
ಹೊಲೆಮಾಡಿದ್ದಾರೆ. 35ತಮ್ಮ ಗಂಡುಹೆಣ್ಣು ಮಕ್ಕಳನ್ನು ಮೋಲೆಕ್ ದೇವತೆಗೆ ಆಹುತಿಕೊಡುವುದಕ್ಕಾಗಿ
ಬೆನ್‍ಹಿನ್ನೋಮ್ ಕಣಿವೆಯಲ್ಲಿ ಬಾಳ್‍ದೇವತೆಗೆ ಪೂಜಾಸ್ಥಳಗಳನ್ನು ಕಟ್ಟಿಸಿದ್ದಾರೆ. ಹೀಗೆ ಯೆಹೂದ
ಕುಲವನ್ನೆ ಪಾಪಕ್ಕೆ ಸಿಕ್ಕಿಸಿದ್ದಾರೆ. ನಾನು ಇಂಥ ಅಸಹ್ಯ ಕಾರ್ಯವನ್ನು ವಿಧಿಸಲಿಲ್ಲ. ಅದರ ಯೋಚನೆಕೂಡ
ನನ್ನ ಮನಸ್ಸಿನಲ್ಲಿ ಸುಳಿಯಲಿಲ್ಲ.”

**ಭರವಸೆಯ ವಾಗ್ದಾನ**

36 “ಖಡ್ಗ-ಕ್ಷಾಮ-ವ್ಯಾಧಿ ಇವುಗಳಿಂದ ಈ ನಗರವು ಬಾಬಿಲೋನಿನ ಅರಸನ ಕೈ ಹಿಡಿತಕ್ಕೆ ಸಿಕ್ಕಲಿದೆ
ಎಂದು ನೀವು ಹೇಳುವ ವಿಷಯದಲ್ಲಿ ಇಸ್ರಯೇಲರ ದೇವರಾದ ಸರ್ವೇಶ್ವರ ಈಗ ಇಂತೆನ್ನುತ್ತಾರೆ:
37‘ಇಗೋ, ನಾನು ಕಡುಕೋಪದಿಂದಲೂ ರೋಷಾವೇಶದಿಂದಲೂ ಈ ಜನರನ್ನು ಯಾವ ದೇಶಗಳಿಗೆ
ಅಟ್ಟಿದೆನೋ ಆ ಎಲ್ಲ ದೇಶಗಳಿಂದ ಈ ಸ್ಥಳಕ್ಕೆ ಮರಳಿ ಕರೆತಂದು ನಿರ್ಭಯವಾಗಿ ವಾಸಿಸುವಂತೆ
ಮಾಡುವೆನು. 38ಅವರು ನನಗೆ ಪ್ರಜೆಯಾಗಿರುವರು. ನಾನು ಅವರಿಗೆ ದೇವರಾಗಿರುವೆನು. 39ಅವರಿಗೆ
ಒಂದೇ ಮನಸ್ಸನ್ನೂ ಒಂದೇ ಮಾರ್ಗವನ್ನೂ ಅನುಗ್ರಹಿಸುವೆನು. ಇದರಿಂದ ಅವರು ತಮ್ಮ ಹಿತಕ್ಕಾಗಿಯೂ
ತಮ್ಮ ಅನಂತರ ತಮ್ಮ ಸಂತಾನದ ಹಿತಕ್ಕಾಗಿಯೂ ನನ್ನಲ್ಲಿ ಸದಾ ಭಯಭಕ್ತಿ ಉಳ್ಳವರಾಗಿರುವರು. 40ನಾನು
ಅವರೊಂದಿಗೆ ಶಾಶ್ವತವಾದ ಒಡಂಬಡಿಕೆಯನ್ನು ಮಾಡುವೆನು. ಹೀಗೆ ನಾನು ಅವರಿಗೆ ಒಳಿತನ್ನು
ಮಾಡುವುದನ್ನು ಬಿಡೆನು. ನನ್ನ ಬಗ್ಗೆ ಅವರ ಹೃದಯದಲ್ಲಿ ಭಯ ಭಕ್ತಿ ನೆಲಸುವಂತೆ ಮಾಡುವೆನು. ಆಗ
ಅವರು ನನ್ನನ್ನು ಬಿಟ್ಟು ಅಗಲಿಹೋಗರು. 41ಅವರಿಗೆ ಒಳಿತನ್ನು ಮಾಡುವುದರಲ್ಲಿ ಸಂತೋಷಿಸುವೆನು.

42 “ಸರ್ವೇಶ್ವರನಾದ ನನ್ನ ಮಾತು ಇವು: ಇಂಥ ಕಠಿಣವಾದ ಕಷ್ಟದುಃಖಗಳನ್ನು ಈ ಜನರ
ಮೇಲೆ ಬರಮಾಡಿದಂತೆಯೇ ನಾನು ಇವರಿಗೆ ವಾಗ್ದಾನ ಮಾಡಿದ ಎಲ್ಲ ಒಳಿತನ್ನೂ ಬರಮಾಡುವೆನು.
43ಜನರಿಲ್ಲದೆ, ಪ್ರಾಣಿಗಳಿಲ್ಲದೆ, ಪಾಳುಬಿದ್ದು ಬಾಬಿಲೋನಿಯರ ಕೈವಶವಾಗಿದೆ ಎನ್ನಲಾಗುವ ಈ ನಾಡಿನಲ್ಲಿ

ಹೊಲಗದ್ದೆಗಳ ವ್ಯವಹಾರ ನಡೆಯುವುದು. 44ಬೆನ್ಯಾಮೀನ್ ನಾಡು, ಜೆರುಸಲೇಮಿನ ಸುತ್ತಮುತ್ತಣ ಪ್ರದೇಶ,
ಜುದೇಯದ ಊರುಗಳು, ಮಲೆನಾಡಿನ, ಕೆಳನಾಡಿನ, ದಕ್ಷಿಣ ಪ್ರಾಂತ್ಯದ ಊರುಗಳು ಈ ಎಲ್ಲ ಸ್ಥಳಗಳಲ್ಲಿ
ಜನರು ಹೊಲಗದ್ದೆಗಳಿಗೆ ಕ್ರಯಕೊಟ್ಟು, ಪತ್ರಕ್ಕೆ ರುಜುಹಾಕಿ, ಮುದ್ರೆ ಒತ್ತಿ, ಸಾಕ್ಷಿ ಹಾಕಿಸಿ ಕೊಂಡುಕೊಳ್ಳುವರು.
ನಾನು ನನ್ನ ಜನರನ್ನು ಗುಲಾಮಗಿರಿಯಿಂದ ಬಿಡಿಸಿ ಬರಮಾಡುವೆನು.

### ಬಿಡುಗಡೆಯ ಬಗ್ಗೆ ಮತ್ತೊಂದು ವಾಗ್ದಾನ

**33** ಯೆರೆಮೀಯನು ಕಾರಾಗೃಹದ ಅಂಗಳದಲ್ಲಿ ಸೆರೆಯಾಗಿದ್ದಾಗ ಅವನಿಗೆ ಸರ್ವೇಶ್ವರ ಎರಡನೆಯ
ವಾಕ್ಯವನ್ನು ಅನುಗ್ರಹಿಸಿದರು. 2ಲೋಕವನ್ನು ಸೃಷ್ಟಿಸಿ, ರೂಪಿಸಿ, ಸ್ಥಾಪಿಸಿದವರು ಹಾಗೂ 'ಸರ್ವೇಶ್ವರ'
ಎಂದು ನಾಮಾಂಕಿತಗೊಂಡ ಅವರು ನನಗೆ ಹೀಗೆಂದರು: 3"ನನ್ನನ್ನು ಬೇಡಿಕೊ, ನಾನು ನಿನಗೆ
ಸದುತ್ತರವನ್ನು ದಯಪಾಲಿಸುವೆನು. ನಿನಗೆ ತಿಳಿಯದ ಮಹತ್ತಾದ ಗೂಢಾರ್ಥಗಳನ್ನು
ಗೋಚರಪಡಿಸುವೆನು. 4ಮುತ್ತಿಗೆಗೂ ಕತ್ತಿಗೂ ತುತ್ತಾಗಲಿರುವ ಈ ಊರಿನವರ ಮನೆಗಳ ವಿಷಯವಾಗಿ
ಮತ್ತು ಜುದೇಯದ ಅರಸರ ಉಪ್ಪರಿಗೆಗಳ ವಿಷಯವಾಗಿ ಇಸ್ರಯೇಲರ ದೇವರಾದ ಸರ್ವೇಶ್ವರ ಆದ ನನ್ನ
ನುಡಿ ಇದು: 5ಈ ಊರಿನವರು ಬಾಬಿಲೋನಿಯರ ವಿರುದ್ಧ ಕದನಕ್ಕೆ ಹೊರಟರೆ ಏನು ಪ್ರಯೋಜನ?
ತಮ್ಮ ಹೆಣಗಳಿಂದ ಅವರನ್ನು ತೃಪ್ತಿ ಪಡಿಸುವರಷ್ಟೆ. ಇವರ ಅಧರ್ಮದ ನಿಮಿತ್ತ ಈ ನಗರಕ್ಕೆ ವಿಮುಖವಾಗಿ,
ಕಡು ಕೋಪಾವೇಶನಾಗಿ ನಾನೇ ಇವರನ್ನು ಸದೆ ಬಡೆಯುವೆನು. 6ಆದರೂ ಈ ನಗರವನ್ನು
ಉದ್ಧಾರಮಾಡಿ, ಸುಧಾರಿಸಿ, ಇದರ ನಿವಾಸಿಗಳನ್ನು ಗುಣಪಡಿಸುವೆನು. ಸಮೃದ್ಧಿಯಾದ ಸೌಭಾಗ್ಯವನ್ನು
ಹಾಗೂ ಶಾಂತಿಸಮಾಧಾನವನ್ನು ಇವರಿಗೆ ಅನುಗ್ರಹಿಸುವೆನು. 7ಜುದೇಯದ ಹಾಗೂ ಇಸ್ರಯೇಲಿನ
ಗುಲಾಮಗಿರಿಯನ್ನು ಬಿಡಿಸಿ ಮೊದಲಿನಂತೆಯೆ ಅವುಗಳನ್ನು ಪುನರ್ ನಿರ್ಮಿಸುವೆನು. 8ಅವರು ನನಗೆ
ವಿರುದ್ಧವಾಗಿ ಮಾಡಿದ ಅಧರ್ಮವನ್ನೆಲ್ಲ ತೊಲಗಿಸಿ ಅವರನ್ನು ಶುದ್ಧೀಕರಿಸುವೆನು; ನನಗೆ ವಿರುದ್ಧ
ಮಾಡಿರುವ ಪಾಪದ್ರೋಹಗಳನ್ನೆಸಗಿ ಕಟ್ಟಿಕೊಂಡಿರುವ ಅಪರಾಧಗಳನ್ನೆಲ್ಲ ಕ್ಷಮಿಸುವೆನು. 9ನಾನು ಈ
ಜನರಿಗೆ ಅನುಗ್ರಹಿಸುವ ಎಲ್ಲ ಸೌಭಾಗ್ಯಗಳ ಸುದ್ದಿಯನ್ನು ಸಕಲ ಭೂರಾಜ್ಯಗಳು ಕೇಳುವರು. ಈ ನಗರಕ್ಕೆ
ನಾನು ನೀಡುವ ಸುಖಸಮಾಧಾನಗಳನ್ನು ಅವರು ನೋಡುವರು ಹಾಗೂ ಹೆದರಿ ನಡುಗುವರು.
ಇದರಿಂದಾಗಿ ಆ ಎಲ್ಲ ರಾಜ್ಯಗಳ ಮುಂದೆ ನನಗೆ ಅದು ಕೀರ್ತಿಯನ್ನು, ಮಹಿಮೆಯನ್ನು ಹಾಗೂ
ಆನಂದವನ್ನು ತರುವುದು."

10 ಸರ್ವೇಶ್ವರ ಹೀಗೆನ್ನುತ್ತಾರೆ: "ಜನರಾಗಲಿ ಜಾನುವಾರುಗಳಾಗಲಿ ಇಲ್ಲದೆ ಪಾಳುಬಿದ್ದ ಸ್ಥಳವೆಂದು
ನೀವು ಕರೆಯುವ ಈ ಸ್ಥಳದಲ್ಲೇ, ಅಂದರೆ ಜನಪಶುರಹಿತವಾಗಿ ನಿವಾಸಿಗಳಿಲ್ಲದೆ ಹಾಳುಬಿದ್ದಿರುವ
ಜುದೇಯದ ಊರುಗಳಲ್ಲೇ, ಜೆರುಸಲೇಮಿನ ಬೀದಿಗಳಲ್ಲೇ 11ಹರ್ಷಧ್ವನಿ, ಉಲ್ಲಾಸ, ಕೋಲಾಹಲ,
ವಧೂವರರ ಸ್ವರ, ಇವು ಮತ್ತೆ ಕೇಳಿಬರುವುವು. 'ಸೇನಾಧೀಶ್ವರ ಸರ್ವೇಶ್ವರನಿಗೆ ಕೃತಜ್ಞತಾಸ್ತೋತ್ರ ಮಾಡಿ;
ಆತ ಒಳ್ಳೆಯವನು, ಆತನ ಪ್ರೀತಿ ಶಾಶ್ವತ' ಎಂದು ಹಾಡುತ್ತಾ ಕೃತಜ್ಞತಾಬಲಿಯನ್ನು ದೇವಾಲಯಕ್ಕೆ
ತರುವರು. ಅವರ ಗಾನ ನಿಮ್ಮ ಕಿವಿಗೆ ಬೀಳುವುದು. ನಾಡನ್ನು ಬಿಡುಗಡೆಮಾಡಿ ಹಿಂದಿನ ಸುಸ್ಥಿತಿಗೆ
ಏರಿಸುವೆನು.

12 ಸರ್ವಶಕ್ತ ಸರ್ವೇಶ್ವರನ ಮಾತುಗಳಿವು: "ಜನರಾಗಲಿ ಜಾನುವಾರುಗಳಾಗಲಿ ಇಲ್ಲದೆ
ಹಾಳುಬಿದ್ದಿರುವ ಈ ಪ್ರಾಂತ್ಯ ಹಾಗು ಇಲ್ಲಿನ ಊರುಕೇರಿಗಳು ಮತ್ತೆ ಕುರುಬರು ತಮ್ಮ ಹಿಂಡುಗಳನ್ನು ಇಲ್ಲಿ
ತಂಗಿಸಲು ಆಸರೆಯಾಗುವುವು. 13ಮಲೆನಾಡಿನ, ಕೆಳನಾಡಿನ ಹಾಗೂ ದಕ್ಷಿಣ ಪ್ರಾಂತ್ಯದ ಊರುಗಳು,
ಬೆನ್ಯಾಮಿನ್ ನಾಡು, ಜೆರುಸಲೇಮಿನ ಸುತ್ತಮುತ್ತಲ ಪ್ರದೇಶಗಳು, ಜುದೇಯದ ಊರುಗಳು, ಈ ಎಲ್ಲ
ಸ್ಥಳಗಳಲ್ಲಿ ಮಂದೆಗಳು ಲೆಕ್ಕಿಸುವವನ ಕಣ್ಮುಂದೆ ಮತ್ತೆ ಹಾದುಹೋಗುವುವು. ಇದು ಸರ್ವೇಶ್ವರನಾದ ನನ್ನ
ನುಡಿ."

## ಮುಂಬರಲಿರುವ ವ್ಯವಸ್ಥಾಪನೆ

14 ಸರ್ವೇಶ್ವರ ಹೀಗೆನ್ನುತ್ತಾರೆ: "ಗಮನಿಸಿರಿ! ದಿನಗಳು ಬರಲಿವೆ. ಇಸ್ರಯೇಲ್, ಯೆಹೂದ
ವಂಶಗಳ ವಿಷಯವಾಗಿ ನಾನು ನುಡಿದಿರುವ ಶುಭವಾಕ್ಯವನ್ನು ನೆರವೇರಿಸುವ ದಿನಗಳು ಬರಲಿವೆ. 15ಆ
ಕಾಲದಲ್ಲಿ, ಆ ದಿನಗಳಲ್ಲಿ, ದಾವೀದನೆಂಬ ಮೂಲದಿಂದ ಸದ್ಧರ್ಮಿಯಾದ ಮೊಳಕೆಯೊಂದನ್ನು
ಚಿಗುರಿಸುವೆನು. ಆತನು ನಾಡಿನಲ್ಲಿ ನ್ಯಾಯನೀತಿಯನ್ನು ನಿರ್ವಹಿಸುವನು. 16ಆಗ ಯೆಹೂದ್ಯರು
ಸುರಕ್ಷಿತವಾಗಿರುವರು. ಜೆರುಸಲೇಮಿನವರು ನೆಮ್ಮದಿಯಿಂದ ವಾಸಿಸುವರು. 'ಯೆಹೋವಚಿದ್ಕೇನು' (ಅಂದರೆ
ಸರ್ವೇಶ್ವರನೇ ನಮ್ಮ ಸದ್ಧರ್ಮ) ಎಂಬ ಹೆಸರು ಈ ನಗರಕ್ಕೆ ಸಲ್ಲುವುದು. 17ಸರ್ವೇಶ್ವರನಾದ ನಾನು
ಹೇಳುವುದೇನೆಂದರೆ: ದಾವೀದ ವಂಶವು ನಿಂತು ಹೋಗದು. ಇಸ್ರಯೇಲರ ವಂಶದವರು ಆ
ಸಿಂಹಾಸನದಲ್ಲಿ ಆಸೀನರಾಗುತ್ತಾ ಬರುವರು. 18ಅದಕ್ಕೆ ಆ ಸಂತಾನದವರಲ್ಲಿ ಒಬ್ಬ ಗಂಡಸು ಇಲ್ಲದೆ ಇರನು.
ಅಂತೆಯೇ ನನ್ನ ಸನ್ನಿಧಿಯಲ್ಲಿ ನಿರಂತರವಾಗಿ ದಹನಬಲಿಯನ್ನು, ನೈವೇದ್ಯವನ್ನು ಹಾಗೂ ಕಾಣಿಕೆಯನ್ನು
ಒಪ್ಪಿಸತಕ್ಕ ಒಬ್ಬನು ಲೇವಿಕುಲದಲ್ಲಿ ಇದ್ದೇ ಇರುವನು."

19 ಸರ್ವೇಶ್ವರ, ಯೆರೆಮೀಯನಿಗೆ ಈ ಮಾತನ್ನೂ ದಯಪಾಲಿಸಿದರು: 20"ಸರ್ವೇಶ್ವರನಾದ ನನ್ನ
ನುಡಿ ಇದು: ಹಗಲಿರುಳೆಂಬ ನನ್ನ ನಿಬಂಧನೆಗಳನ್ನು ನಿಲ್ಲಿಸಿ, ಹಗಲನ್ನು ಮತ್ತು ಇರುಳನ್ನು ಅದರದರ
ಸಮಯದಲ್ಲಿ ಉಂಟಾಗದಂತೆ ಮಾಡಲು ನಿಮ್ಮಿಂದಾದೀತೆ? 21ಆಗುವುದಾದರೆ ಮಾತ್ರ ನನ್ನ ದಾಸ
ದಾವೀದನೊಂದಿಗೂ ನನ್ನ ಪರಿಚಾರಕರಾದ ಲೇವಿಕುಲದ ಯಾಜಕರೊಂದಿಗೂ ನಾನು ಮಾಡಿದ
ಒಡಂಬಡಿಕೆ ನಿಂತು ಹೋಗುವುದು ಮತ್ತು ದಾವೀದನ ಸಿಂಹಾಸನವನ್ನು ಏರಿ ಆಳತಕ್ಕ ಅವನ
ಸಂತಾನದವನು ಒಬ್ಬನೂ ಇಲ್ಲವಾಗುವನು. 22ಆದರೆ, ನನ್ನ ದಾಸ ದಾವೀದನ ಸಂತಾನವನ್ನು ಅಸಂಖ್ಯಾತ
ನಕ್ಷತ್ರಗಣದಷ್ಟು ಹೆಚ್ಚಿಸುವೆನು. ನನ್ನ ಪರಿಚಾರಕರಾದ ಲೇವಿಯ ಸಂಖ್ಯೆಯನ್ನು ಎಣಿಸಲಾಗದ
ಸಮುದ್ರತೀರದ ಮರಳಿನಷ್ಟು ಅಧಿಕರಿಸುವೆನು."

23 ಇದಲ್ಲದೆ ಸರ್ವೇಶ್ವರ ಯೆರೆಮೀಯನಿಗೆ ಈ ವಾಕ್ಯವನ್ನು ಅನುಗ್ರಹಿಸಿದರು: 24"ಸರ್ವೇಶ್ವರನಾದ
ನಾನು ಆರಿಸಿಕೊಂಡಿದ್ದ ಎರಡು ವಂಶಗಳನ್ನು ನಿರಾಕರಿಸಿಬಿಟ್ಟಿದ್ದೇನೆ ಎಂದು ಜನರು ಆಡಿಕೊಳ್ಳುತ್ತಿದ್ದಾರೆ.
ಈ ಮಾತನ್ನು ನೀನು ಗಮನಿಸಿರಬೇಕು. ನನ್ನ ಜನರು ಒಂದು ಜನಾಂಗವೇ ಅಲ್ಲ ಎನ್ನುವಷ್ಟರ ಮಟ್ಟಿಗೆ
ಅವರು ಅಸಡ್ಡೆ ಮಾಡುತ್ತಿದ್ದಾರೆ ಅಲ್ಲವೆ? 25ಸರ್ವೇಶ್ವರನಾದ ನಾನು ಹೇಳುವುದನ್ನು ಕೇಳು: ಹಗಲಿರುಳೆಂಬ
ಸ್ಥಿರವಾದ ನಿಬಂಧನೆಯನ್ನು ನಾನು ಮಾಡದೆ ಹೋಗಿದ್ದರೆ, ಭೂಮ್ಯಾಕಾಶಗಳಿಗೆ ನಿಯಮವನ್ನು ನಾನು
ವಿಧಿಸದೆ ಹೋಗಿದ್ದರೆ, ಆಗ ಮಾತ್ರ ನಾನು ಯಕೋಬನ ಸಂತಾನದವರನ್ನು ತ್ಯಜಿಸುತ್ತಿದ್ದೆ. ಅಬ್ರಹಾಮ,
ಇಸಾಕ, ಯಕೋಬ ಇವರ ಸಂತತಿಯನ್ನು ಆಳತಕ್ಕ ಒಡೆಯನನ್ನು ದಾಸ ದಾವೀದನ ವಂಶದಿಂದ ಆರಿಸದೆ
ಆ ವಂಶವನ್ನು ನಿರಾಕರಿಸುತ್ತಿದ್ದೆ. ಆದರೆ ಈಗ ಗುಲಾಮಗಿರಿಯಿಂದ ಅವರನ್ನು ಬಿಡುಗಡೆ ಮಾಡುವೆನು.
ಅವರಿಗೆ ಕರುಣೆಯನ್ನು ತೋರಿಸಿಯೇ ತೋರಿಸುವೆನು."

## ಚಿದ್ಕೀಯನಿಗೊಂದು ಎಚ್ಚರಿಕೆ

**34** ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು, ಅವನ ಸಮಸ್ತ ಸೈನ್ಯವು, ಅವನ ಕೈಕೆಳಗಿನ
ಭೂರಾಜರೆಲ್ಲರು ಹಾಗೂ ಸಕಲ ಪ್ರಜೆಗಳು ಜೆರುಸಲೇಮಿಗೂ ಅದಕ್ಕೆ ಸೇರಿದ ಎಲ್ಲ ಊರುಗಳಿಗೂ ವಿರುದ್ಧ
ಯುದ್ಧ ಮಾಡುತ್ತಿದ್ದಾ ಸರ್ವೇಶ್ವರ ಯೆರೆಮೀಯನಿಗೆ ಈ ವಿಷಯವನ್ನು ತಿಳಿಸಿದರು: 2"ಇಸ್ರಯೇಲರ
ದೇವರಾದ ಸರ್ವೇಶ್ವರನಾದ ನನ್ನ ನುಡಿ ಇದು: ನೀನು ಜುದೇಯದ ಅರಸ ಚಿದ್ಕೀಯನ ಬಳಿಗೆ ಹೋಗಿ
ಅವನಿಗೆ ಹೀಗೆಂದು ಹೇಳು – 'ಸರ್ವೇಶ್ವರನ ಮಾತನ್ನು ಆಲಿಸು: ಇಗೋ, ನಾನು ಈ ನಗರವನ್ನು
ಬಾಬಿಲೋನಿನ ಅರಸನ ಕೈವಶಮಾಡುವೆನು. ಅವನು ಇದನ್ನು ಬೆಂಕಿಯಿಂದ ಸುಟ್ಟುಹಾಕುವನು. 3ನೀನು
ಅವನ ಕೈಯಿಂದ ತಪ್ಪಿಸಿಕೊಳ್ಳಲಾರದೆ ಬಂಧಿತನಾಗಿ ಅವನ ವಶವಾಗುವೆ. ಬಾಬಿಲೋನಿನ ಅರಸನ
ಸಮಕ್ಷಮದಲ್ಲಿ ನಿಲ್ಲುವೆ. ಅವನು ನಿನ್ನೊಡನೆ ಮುಖಾಮುಖಿಯಾಗಿ ಮಾತಾಡುವನು. ನೀನು ಬಾಬಿಲೋನಿಗೆ
ಗಡಿ ಪಾರಾಗುವೆ. 4ಆದರೂ ಜುದೇಯದ ಅರಸನಾದ ಚಿದ್ಕೀಯನೇ, ಸರ್ವೇಶ್ವರನ ಮಾತನ್ನು ಕೈಗೊಳ್ಳು;

ಸರ್ವೇಶ್ವರ ನಿನ್ನ ವಿಷಯವಾಗಿ ಹೀಗೆನ್ನುತ್ತಾರೆ – ನೀನು ಕತ್ತಿಯಿಂದ ಹತನಾಗುವುದಿಲ್ಲ. 5ನೆಮ್ಮದಿಯಿಂದ ಸಾಯುವೆ. ನಿನಗಿಂತ ಮುಂಚೆ, ನಿನ್ನ ಪೂರ್ವಜರಾದ ದಿವಂಗತ ಅರಸರ ಸ್ಮರಣಾರ್ಥ ಜನರು ಧೂಪ ಹಾಕಿದ ಪ್ರಕಾರ ನಿನಗೂ ಹಾಕುವರು. 'ಅಯ್ಯೋ ಒಡೆಯಾ' ಎಂದು ನಿನಗಾಗಿ ಗೋಳಾಡುವರು. ಇದು ನನ್ನ ನುಡಿ,' ಎಂದಿದ್ದಾರೆ ಸರ್ವೇಶ್ವರ."

6 ಅಂತೆಯೇ, ಪ್ರವಾದಿ ಯೆರೆಮೀಯನು ಈ ವಿಷಯಗಳನ್ನೆಲ್ಲ ಜುದೇಯದ ಅರಸ ಚಿದ್ಕೀಯನಿಗೆ ಜೆರುಸಲೇಮಿನಲ್ಲೆ ತಿಳಿಸಿದನು. 7ಆಗ ಬಾಬಿಲೋನಿನ ಅರಸನ ಸೈನ್ಯವು ಜೆರುಸಲೇಮಿಗೂ ಮತ್ತು ಜುದೇಯದೊಳಗೆ ಕೋಟೆ ಕೊತ್ತಲದ ನಗರಗಳಾಗಿದ್ದ ಲಾಕೀಷಿಗೂ ಅಜೇಕಕ್ಕೂ ವಿರುದ್ಧ ಯುದ್ಧಮಾಡುತ್ತಿತ್ತು.

**ಬಿಡುಗಡೆಯಾದರೂ ಮತ್ತೆ ಜೀತದಾರರಾದರು**

8 ಯೆರೆಮೀಯನಿಗೆ ಸರ್ವೇಶ್ವರನಿಂದ ಮತ್ತೊಂದು ವಾಣಿ ಉಂಟಾಯಿತು. ಇಷ್ಟರೊಳಗೆ ಅರಸ ಚಿದ್ಕೀಯನು ಮತ್ತು ಜೆರುಸಲೇಮಿನ ಜನರೆಲ್ಲರು ಸೇರಿ ಒಂದು ಒಪ್ಪಂದ ಮಾಡಿಕೊಂಡಿದ್ದರು. 9ಅದರ ಪ್ರಕಾರ ಅವರಲ್ಲಿ ಪ್ರತಿ ಒಬ್ಬನು ತನ್ನ ಜೀತದಾರರಲ್ಲಿ ಹಿಬ್ರಿಯರಾದವರನ್ನು ಬಿಡುಗಡೆಮಾಡಬೇಕಿತ್ತು. ಯೆಹೂದ್ಯರಾದ ಸಹೋದರ ಸಹೋದರಿಯರನ್ನು ಯಾರೂ ಇನ್ನು ಮುಂದೆ ಜೀತದಾರರನ್ನಾಗಿ ಇರಿಸಿಕೊಳ್ಳದೆ ಅವರಿಗೆ ವಿಮೋಚನೆಯನ್ನು ಪ್ರಕಟಿಸಬೇಕೆಂಬುದು ಆ ಒಪ್ಪಂದವಾಗಿತ್ತು. 10ತಮ್ಮ ತಮ್ಮ ಹೆಣ್ಣು ಗಂಡು ಜೀತದಾರರನ್ನು ಬಿಡುಗಡೆಮಾಡಿ ಅವರಿಂದ ಇನ್ನು ಜೀತಮಾಡಿಸಿಕೊಳ್ಳುವುದಿಲ್ಲ ಎಂಬ ಈ ಒಪ್ಪಂದಕ್ಕೆ ಸಮ್ಮತಿಸಿದ್ದ ಎಲ್ಲ ಅಧಿಕಾರಿಗಳೂ ಸಮಸ್ತ ಪ್ರಜೆಗಳೂ ಅದರಂತೆ ನಡೆದು ಜೀತದಾರರನ್ನು ಬಿಡುಗಡೆ ಮಾಡಿದ್ದರು. ಆದರೆ ಕೆಲವು ಕಾಲದ ಮೇಲೆ ತಮ್ಮ ಮನಸ್ಸನ್ನು ಬದಲಾಯಿಸಿಕೊಂಡರು. ಬಿಡುಗಡೆ ಮಾಡಿದ್ದವರನ್ನು ಮತ್ತೆ ಜೀತದಾರರನ್ನಾಗಿ ಸೇರಿಸಿಕೊಂಡು ಅಧೀನದಲ್ಲಿ ಇಟ್ಟುಕೊಂಡಿದ್ದರು.

12 ಹೀಗಿರಲು ಸರ್ವೇಶ್ವರ ಯೆರೆಮೀಯನಿಗೆ ಈ ವಾಕ್ಯವನ್ನು ದಯಪಾಲಿಸಿದರು: 13"ಇಸ್ರಯೇಲರ ದೇವರಾದ ಸರ್ವೇಶ್ವರನ ವಾಣಿ ಇದು – ಈಜಿಪ್ಟ್ ದೇಶದಲ್ಲಿ ಗುಲಾಮರಾಗಿದ್ದ ನಿಮ್ಮ ಪೂರ್ವಜರನ್ನು ನಾನು ಅಲ್ಲಿಂದ ಕರೆದು ತಂದಾಗ ನಾನು ಅವರೊಡನೆ ಒಂದು ಒಪ್ಪಂದ ಮಾಡಿಕೊಂಡೆ. 14ಒಬ್ಬ ಹಿಬ್ರಿಯನು ತನ್ನನ್ನೇ ನಿಮಗೆ ಮಾರಿಕೊಂಡು ಆರು ವರ್ಷ ನಿಮ್ಮ ಜೀತಗಾರನಾಗಿದ್ದರೆ ಅಂಥ ಸಹೋದರನನ್ನು ಏಳನೆಯ ವರ್ಷದಲ್ಲಿ ಸ್ವತಂತ್ರನನ್ನಾಗಿ ಬಿಟ್ಟು ಬಿಡಿ ಎಂದು ವಿಧಿಸಿದ್ದೆ. ಆದರೆ ನಿಮ್ಮ ಪೂರ್ವಜರು ನನ್ನ ಮಾತನ್ನು ಕೇಳಲಿಲ್ಲ, ಕಿವಿಗೊಡಲೂ ಇಲ್ಲ. 15ನೀವೋ ಕೂಡಲೆ ಮನಮರುಗಿ ನಿಮ್ಮ ನಿಮ್ಮ ನೆರೆಹೊರೆಯವರಿಗೆ ಬಿಡುಗಡೆಯನ್ನು ಪ್ರಕಟಿಸಿ ನನ್ನ ಚಿತ್ತಾನುಸಾರ ನಡೆದಿರಿ. ನನ್ನ ಹೆಸರಿನಿಂದ ಖ್ಯಾತಗೊಂಡಿರುವ ದೇವಾಲಯದಲ್ಲಿ, ನನ್ನ ಸಮ್ಮುಖದಲ್ಲಿ ಒಪ್ಪಂದ ಮಾಡಿಕೊಂಡಿರಿ. 16ಆದರೆ ಆಮೇಲೆ ನಿಮ್ಮ ಮನಸ್ಸನ್ನು ಮಾರ್ಪಡಿಸಿಕೊಂಡಿರಿ. ಸ್ವತಂತ್ರರನ್ನಾಗಿ ಬಿಟ್ಟಿದ್ದವರನ್ನು ಪುನಃ ಜೀತದಾರರನ್ನಾಗಿ ಸೇರಿಸಿಕೊಂಡು, ಶೋಷಣೆಗೆ ಗುರಿಮಾಡಿ, ನನ್ನ ನಾಮಕ್ಕೆ ಅಪಕೀರ್ತಿ ತಂದಿದ್ದೀರಿ. 17ಆದಕಾರಣ ಸರ್ವೇಶ್ವರನಾದ ನಾನು ಹೇಳುವುದು ಇದು – ನೀವು ನನ್ನ ಮಾತನ್ನು ಕೇಳಲಿಲ್ಲ, ನಿಮ್ಮ ಸಹೋದರರಿಗೂ ನೆರೆಹೊರೆಯವರಿಗೂ ಬಿಡುಗಡೆಯನ್ನು ಪ್ರಕಟಿಸಲಿಲ್ಲ. ಇಗೋ ಸರ್ವೇಶ್ವರನಾದ ನನ್ನ ನುಡಿ: ಖಡ್ಗ–ವ್ಯಾಧಿ–ಕ್ಷಾಮ ಇವುಗಳಿಗೆ ನೀವು ಗುರಿ ಆಗುವಂತೆ ನಾನು ನಿಮಗೆ ಬಿಡುಗಡೆಯನ್ನು ಪ್ರಕಟಿಸುತ್ತೇನೆ. ಲೋಕದ ಸಮಸ್ತ ರಾಜ್ಯಗಳ ಕಣ್ಣಿಗೆ ನೀವು ಭಯಾಸ್ಪದವಾಗುವಂತೆ ಮಾಡುವೆನು. 18ನನ್ನ ನಿಬಂಧನೆಗಳನ್ನು ಕೈಗೊಳ್ಳದೆ, ನನ್ನ ಒಡಂಬಡಿಕೆಯನ್ನು ಮೀರಿದವರಿಗೆ ಇಬ್ಭಾಗವಾಗಿ ಸೀಳಿದ ಕರುವಿನ ಗತಿ ಬರುವಂತೆ ಮಾಡುವೆನು. 19ಜುದೇಯದ ಹಾಗು ಜೆರುಸಲೇಮಿನ ರಾಜ್ಯಾಧಿಕಾರಿಗಳು, ಕಂಚುಕಿಗಳು, ಯಾಜಕರು, ಸೀಳಿದ ಕರುವಿನ ಹೋಳುಗಳ ನಡುವೆ ಹಾದು ನನ್ನ ಮುಂದೆ ಒಪ್ಪಂದ ಮಾಡಿದರು. ಆದರೆ ಆ ಒಪ್ಪಂದಕ್ಕೆ ತದ್ವಿರುದ್ಧವಾಗಿ ನಡೆದಿದ್ದಾರೆ ನಾಡಿನ ಎಲ್ಲ ಜನರು. 20ಇವರೆಲ್ಲರನ್ನು ಶತ್ರುಗಳ ವಶಕ್ಕೆ ಒಪ್ಪಿಸುವೆನು. ಇವರ ಪ್ರಾಣವನ್ನು ಹುಡುಕುವ ಶತ್ರುಗಳ ಕೈಗೆ ಕೊಡುವೆನು. ಇವರ ಹೆಣಗಳು ಆಕಾಶದ ಪಕ್ಷಿಗಳಿಗೂ ಭೂಜಂತುಗಳಿಗೂ ಆಹಾರವಾಗುವುವು. 21ಜುದೇಯದ ಅರಸ ಚಿದ್ಕೀಯನನ್ನೂ ಅವನ ಮಂತ್ರಿಗಳನ್ನೂ ಅವರ ಶತ್ರುಗಳಿಗೆ ಅಂದರೆ, ಅವರ ಪ್ರಾಣಹತ್ಯಕ್ಕಾಗಿ ಕಾದಿರುವ, ತಕ್ಷಣಕ್ಕೆ ಹಿಂದಿರುಗಿ ಹೋಗಿರುವ,

ಬಾಬಿಲೋನಿಯದ ಅರಸನ ಕೈಗೆ ಕೊಡುವೆನು. 22ಸರ್ವೇಶ್ವರನಾದ ನನ್ನ ಗುರಿಯನ್ನು ಗಮನಿಸಿರಿ – ನಾನು ಅಪ್ಪಣೆಕೊಟ್ಟು, ಶತ್ರುಗಳು ಈ ನಗರಕ್ಕೆ ಮತ್ತೆ ಬರುವಂತೆ ಮಾಡುವೆನು. ಅವರು ಇದರ ವಿರುದ್ಧ ಯುದ್ಧಮಾಡಿ, ಇದನ್ನು ಆಕ್ರಮಿಸಿಕೊಂಡು, ಬೆಂಕಿಯಿಂದ ಸುಟ್ಟು ಹಾಕುವರು. ನಾನು ಜುದೇಯದ ನಗರಗಳನ್ನು ನಿರ್ಜನವಾದ ಪಾಳುಭೂಮಿಯನ್ನಾಗಿಸುವೆನು.

### ರೇಕಾಬ್ಯರ ಆದರ್ಶ

**35** ಯೋಷೀಯನ ಮಗನಾದ ಜುದೇಯದ ಅರಸ ಯೆಹೋಯಾಕೀಮನ ಕಾಲದಲ್ಲಿ ಸರ್ವೇಶ್ವರಸ್ವಾಮಿ
ಯೆರೆಮೀಯನಾದ ನನಗೆ ದಯಪಾಲಿಸಿದ ವಾಕ್ಯ ಇದು: 2 "ನೀನು ರೇಕಾಬನ ಮನೆತನದವರ ಬಳಿಗೆ
ಹೋಗಿ, ಅವರ ಸಂಗಡ ಮಾತಾಡು. ಅವರನ್ನು ಸರ್ವೇಶ್ವರನಾಲಯದ ಒಂದು ಕೋಣೆಯೊಳಕ್ಕೆ ಕರೆದು
ದ್ರಾಕ್ಷಾರಸವನ್ನು ಕುಡಿಯುವುದಕ್ಕೆ ಕೊಡು." 3ಅಂತೆಯೆ ನಾನು (ಮತ್ತೊಬ್ಬ) ಯೆರೆಮೀಯನ ಮಗನೂ
ಹಬಚ್ಚಿನ್ಯನ ಮೊಮ್ಮಗನೂ ಆದ ಯಾಜನ್ಯನನ್ನು, ಅವನ ಅಣ್ಣತಮ್ಮಂದಿರನ್ನು, ಅವನ ಎಲ್ಲ ಮಕ್ಕಳನ್ನು,
ಅಂತು ರೇಕಾಬನ ಮನೆತನದವರೆಲ್ಲರನ್ನೂ ಸರ್ವೇಶ್ವರನಾಲಯಕ್ಕೆ ಕರೆದೊಯ್ದೆನು. 4ಇಗ್ದಲ್ಯನ ಮಗನೂ
ದೇವರ ಮನುಷ್ಯನೂ ಆದ ಹಾನಾನನ ಮಕ್ಕಳ ಕೋಣೆಯೊಳಕ್ಕೆ, ಅಂದರೆ ಪದಾಧಿಕಾರಿಗಳ ಕೋಣೆಯ
ಪಕ್ಕದಲ್ಲಿ, ಶಲ್ಲೂಮನ ಮಗನೂ ದ್ವಾರ ಪಾಲಕನೂ ಆದ ಮಾಸೇಯನ ಕೋಣೆಯ ಮೇಲ್ಗಡೆಯಿರುವ
ಕೋಣೆಯೊಳಕ್ಕೆ ಅವರೆಲ್ಲರನ್ನು ಬರಮಾಡಿದೆನು. 5ರೇಕಾಬನ ಆ ಮನೆತನದವರ ಮುಂದೆ ದ್ರಾಕ್ಷಾರಸ
ತುಂಬಿದ ಬಟ್ಟಲುಗಳನ್ನೂ ಪಂಚಪಾತ್ರೆಗಳನ್ನೂ ಇಟ್ಟು, 'ದ್ರಾಕ್ಷಾರಸವನ್ನು ಕುಡಿಯಿರಿ' ಎಂದು ಹೇಳಿದೆನು.
6 ಅದಕ್ಕೆ ಅವರು, "ನಾವು ದ್ರಾಕ್ಷಾರಸವನ್ನು ಕುಡಿಯುವುದಿಲ್ಲ. ನಮ್ಮ ಪೂರ್ವಜನಾದ ರೇಕಾಬನ
ಮಗ ಯೋನಾದಾಬನು ನಮಗೆ, 'ನೀವಾಗಲಿ ನಿಮ್ಮ ಸಂತಾನದವರಾಗಲಿ ಯುಗ ಯುಗಾಂತರಕ್ಕೂ
ದ್ರಾಕ್ಷಾರಸವನ್ನು ಕುಡಿಯಲೇಬಾರದು. 7ಮನೆ ಕಟ್ಟಬಾರದು, ಬೀಜಬಿತ್ತಬಾರದು, ತೋಟ ಮಾಡಬಾರದು,
ಕೊಂಡು ಸೊತ್ತಾಗಿಸಿಕೊಳ್ಳಬಾರದು. ಜೀವಮಾನವೆಲ್ಲ ಗುಡಾರಗಳಲ್ಲೇ ವಾಸಿಸಬೇಕು. ಇದರಿಂದ ನೀವು
ತಂಗುವ ನಾಡಿನಲ್ಲಿ ದೀರ್ಘಕಾಲ ಉಳಿಯುವಿರಿ,' ಎಂದು ಆಜ್ಞಾಪಿಸಿದ್ದಾನೆ. 8ನಮ್ಮ ಪೂರ್ವಜನಾದ
ರೇಕಾಬನ ಮಗ ಯೋನಾದಾಬನು ನಮಗೆ ಕೊಟ್ಟ ಈ ಅಪ್ಪಣೆಯನ್ನು ಎಲ್ಲ ವಿಷಯದಲ್ಲೂ ಕೈಗೊಂಡು
ಬರುತ್ತಿದ್ದೇವೆ. ನಾವಾಗಲಿ, ನಮ್ಮ ಮಡದಿ ಮಕ್ಕಳಾಗಲಿ, ಜೀವಮಾನದಲ್ಲೆಲ್ಲಾ 'ದ್ರಾಕ್ಷಾರಸ ಕುಡಿಯುವುದಿಲ್ಲ.
9ವಾಸಕ್ಕೆ ನಾವು ಮನೆಕಟ್ಟುವುದಿಲ್ಲ. ನಮಗೆ ತೋಟವಿಲ್ಲ, ಹೊಲವಿಲ್ಲ, ಬಿತ್ತನೆ ಬೀಜವಿಲ್ಲ. 10ಗುಡಾರಗಳಲ್ಲಿ
ವಾಸಿಸುತ್ತಾ ನಮ್ಮ ಪೂರ್ವಜ ಯೋನಾದಾಬನು ನಮಗೆ ವಿಧಿಸಿದ್ದನ್ನೆಲ್ಲ ಶಿರಸಾ ವಹಿಸಿ ನಡೆಸಿಕೊಂಡು
ಬರುತ್ತಿದ್ದೇವೆ.
ಆದರೆ ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ಈ ನಾಡಿಗೆ ಮುತ್ತಿಗೆ ಹಾಕಿದಾಗ,
ಬಾಬಿಲೋನಿಯ ಮತ್ತು ಸಿರಿಯದವರ ಸೈನ್ಯಗಳಿಂದ ತಪ್ಪಿಸಿಕೊಳ್ಳಲು, 'ಜೆರುಸಲೇಮಿಗೆ ಹೋಗೋಣ ಬನ್ನಿ'
ಎಂದುಕೊಂಡು ಬಂದೆವು. ಈ ಕಾರಣದಿಂದಲೇ ಇಲ್ಲಿ ವಾಸಿಸುತ್ತಿದ್ದೇವೆ," ಎಂದು ಹೇಳಿದರು.
12 ಆಗ ಸರ್ವೇಶ್ವರ ಯೆರೆಮೀಯನಿಗೆ: 13"ಇಸ್ರಯೇಲರ ದೇವರೂ ಸೇನಾಧೀಶ್ವರನೂ
ಸರ್ವೇಶ್ವರನೂ ಆದ ನಾನು ಹೇಳುವುದು ಇದು: ನೀನು ಹೋಗಿ ಯೆಹೂದ್ಯರಿಗೂ ಜೆರುಸಲೇಮಿನ
ನಿವಾಸಿಗಳಿಗೂ ಹೀಗೆಂದು ತಿಳಿಸು: 'ನೀವು ಬುದ್ಧಿ ತಂದುಕೊಂಡು ನನ್ನ ಮಾತುಗಳನ್ನು ಕೇಳುವುದಿಲ್ಲವೆ?'
ಎನ್ನುತ್ತಾರೆ ಸರ್ವೇಶ್ವರ. 14'ರೇಕಾಬನ ಮಗ ಯೋನಾದಾಬನು ತನ್ನ ಸಂತಾನದವರಿಗೆ ದ್ರಾಕ್ಷಾರಸವನ್ನು
ಕುಡಿಯಬಾರದೆಂದು ಕೊಟ್ಟ ಅಪ್ಪಣೆ ನೆರವೇರಿದೆ. ಅವರು ಇಂದಿನವರೆಗೂ ಕುಡಿಯಲಿಲ್ಲ. 15ಇದಲ್ಲದೆ,
ನಾನು ನನ್ನ ದಾಸರಾದ ಪ್ರವಾದಿಗಳನ್ನೆಲ್ಲ ನಿಮ್ಮ ಬಳಿಗೆ ನಿರಂತರವಾಗಿ ಕಳಿಸುತ್ತಾ ಬಂದೆ. ನೀವೆಲ್ಲರು ನಿಮ್ಮ
ನಿಮ್ಮ ದುರ್ಮಾರ್ಗಗಳಿಂದ ಹಿಂದಿರುಗಿ ನಿಮ್ಮ ನಡತೆಗಳನ್ನು ಸರಿಪಡಿಸಿಕೊಳ್ಳಿರಿ. ಅನ್ಯ ದೇವತೆಗಳನ್ನು
ಹಿಂಬಾಲಿಸಿ ಪೂಜಿಸದಿರಿ. ಹಾಗೆ ಮಾಡಿದರೆ ನಾನು ನಿಮಗೂ ನಿಮ್ಮ ಪೂರ್ವಜರಿಗೂ ಅನುಗ್ರಹಿಸಿದ
ನಾಡಿನಲ್ಲಿ ಸುಖವಾಸಿಗಳಾಗಿರುವಿರಿ ಎಂದು ಅವರ ಮುಖಾಂತರ ಎಚ್ಚರಿಸಿದೆ. ಆದರೆ ನೀವು ಕೇಳಲಿಲ್ಲ,
ಕಿವಿಗೊಡಲೂ ಇಲ್ಲ. 16ರೇಕಾಬನ ಮಗ ಯೋನಾದಾಬನ ಸಂತಾನದವರು ತಮ್ಮ ಪೂರ್ವಜನು ತಮಗೆ

ವಿಧಿಸಿದ್ದನ್ನು ಕೇಳಿ ಅನುಸರಿಸಿದರು. ಆದರೆ ಈ ಜನರು ನನ್ನ ಮಾತನ್ನು ಕೇಳದೆ ಹೋದರು. 17ಆದ್ದರಿಂದ ಸೇನಾಧೀಶ್ವರ ಸರ್ವೇಶ್ವರನೂ ಇಸ್ರಯೇಲಿನ ದೇವರೂ ಆದ ನಾನು ಹೇಳುವುದನ್ನು ಗಮನಿಸು: ಯೆಹೂದ್ಯರಿಗೂ ಜೆರುಸಲೇಮಿನವರೆಲ್ಲರಿಗೂ ನಾನು ಕೊಟ್ಟ ಶಾಪದ ಕೇಡುಗಳನ್ನೆಲ್ಲಾ ಅವರ ಮೇಲೆ ಬರಮಾಡುವೆನು. ನಾನು ಹೇಳಿದರೂ ಅವರು ಕೇಳಲಿಲ್ಲ, ಕೂಗಿದರೂ ಉತ್ತರಕೊಡಲಿಲ್ಲ'."

18 ಯೆರೆಮೀಯನು ರೇಕಾಬ್ಯರಿಗೆ, "ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಹೀಗೆನ್ನುತ್ತಾರೆ: 'ನೀವು ನಿಮ್ಮ ಪೂರ್ವಜ ಯೋನಾದಾಬನ ಅಪ್ಪಣೆಯನ್ನು ಕೇಳಿ ಅವನ ಎಲ್ಲ ವಿಧಿಗಳನ್ನು ಅನುಸರಿಸಿ, ಅವನು ಆಜ್ಞಾಪಿಸಿದ್ದನ್ನೆಲ್ಲ ನೆರವೇರಿಸಿದ ಕಾರಣ 19ರೇಕಾಬನ ಮಗ ಯೋನಾದಾಬನ ಸಂತಾನದವರಲ್ಲಿ ನನ್ನ ಸಮ್ಮುಖ ಸೇವೆಮಾಡತಕ್ಕವರು ತಲತಲಾಂತರಕ್ಕೂ ಇದ್ದೇ ಇರುವರು' ಎಂದನು."

### ಸುಟ್ಟು ಹಾಕಲಾದ ಸುರುಳಿ

**36** ಯೋಷೀಯನ ಮಗನೂ ಜುದೇಯದ ಅರಸನೂ ಆದ ಯೆಹೋಯಾಕೀಮನ ಆಳ್ವಿಕೆಯ ನಾಲ್ಕನೆಯ ವರ್ಷದಲ್ಲಿ ಯೆರೆಮೀಯನಿಗೆ ಕೇಳಿ ಬಂದ ಸರ್ವೇಶ್ವರನ ವಾಣಿ: 2"ನೀನು ಗ್ರಂಥ ಬರೆಯುವ ಒಂದು ಸುರುಳಿಯನ್ನು ತೆಗೆದುಕೊಂಡು, ನಾನು ಯೋಷೀಯನ ಕಾಲದಲ್ಲಿ ನಿನ್ನ ಸಂಗಡ ಮಾತಾಡಿದಂದಿನಿಂದ ಇಂದಿನವರೆಗೆ ಇಸ್ರಯೇಲ್, ಯೆಹೂದ ಹಾಗೂ ಸಕಲ ರಾಷ್ಟ್ರಗಳ ವಿಷಯವಾಗಿ ನಿನಗೆ ನುಡಿಯುತ್ತಾ ಬಂದಿರುವ ಮಾತುಗಳನ್ನೆಲ್ಲ ಬರೆ. 3ಬಹುಶಃ, ಯೆಹೂದವಂಶದವರು ನಾನು ಅವರಿಗೆ ಮಾಡಬೇಕೆಂದಿರುವ ಕೇಡನ್ನಾದರು ಕೇಳಿ ತಮ್ಮ ದುರ್ಮಾರ್ಗಗಳನ್ನು ಬಿಟ್ಟು ಹಿಂದಿರುಗಬಹುದು. ಹಿಂದಿರುಗಿದರೆ, ಅವರ ಪಾಪಾಪರಾಧಗಳನ್ನು ಕ್ಷಮಿಸಿಬಿಡುವೆನು."

4 ಆಗ ಯೆರೆಮೀಯನು ನೇರೀಯನ ಮಗ ಬಾರೂಕನನ್ನು ಕರೆಯಿಸಿ ಸರ್ವೇಶ್ವರನ ಮಾತುಗಳನ್ನೆಲ್ಲ ಹೇಳಿದನು. ಅವನು ಯೆರೆಮೀಯನ ಬಾಯಿಂದ ಬಂದ ಹಾಗೆಯೇ ಅವುಗಳನ್ನು ಗ್ರಂಥದ ಸುರುಳಿಯಲ್ಲಿ ಬರೆದನು. 5ಬಳಿಕ ಯೆರೆಮೀಯನು ಬಾರೂಕನಿಗೆ, "ಸರ್ವೇಶ್ವರನ ಆಲಯದೊಳಗೆ ಪ್ರವೇಶಿಸಲು ನನಗೆ ತಡೆಮಾಡಲಾಗಿದೆ. 6ಆದುದರಿಂದ ನೀನೇ ಹೋಗಿ ನನ್ನ ಬಾಯಿಂದ ಬಂದ ಹಾಗೆ ನೀನು ಈ ಸುರುಳಿಯಲ್ಲಿ ಬರೆದಿರುವ ಸರ್ವೇಶ್ವರನ ವಾಕ್ಯಗಳನ್ನು, ಉಪವಾಸದಿನದಂದು, ಸರ್ವೇಶ್ವರನ ಆಲಯದೊಳಗೆ ಕೂಡಿರುವ ಜನರಿಗೂ ಆಯಾಯ ಊರುಗಳಿಂದ ಬಂದಿರುವ ಯೆಹೂದ್ಯರೆಲ್ಲರಿಗೂ ಕೇಳಿಸುವಂತೆ ಓದು. 7ಅವರು ಒಂದು ವೇಳೆ ಸರ್ವೇಶ್ವರನಿಗೆ ಶರಣಾಗತರಾಗಿ ತಮ್ಮ ದುರ್ಮಾರ್ಗಗಳಿಂದ ಹಿಂದಿರುಗಬಹುದು. ಏಕೆಂದರೆ, ಸರ್ವೇಶ್ವರ ಆ ಜನರ ವಿರುದ್ಧ ತೋರಿಸಬೇಕೆಂದಿರುವ ಕೋಪಾಕ್ರೋಶ ಭಯಾನಕವಾಗಿದೆ," ಎಂದು ಆಜ್ಞಾಪಿಸಿದನು. 8ಪ್ರವಾದಿ ಯೆರೆಮೀಯನು ವಿಧಿಸಿದಂತೆಯೇ ನೇರೀಯನ ಮಗ ಬಾರೂಕನು ಸುರುಳಿಯಲ್ಲಿದ್ದ ಸರ್ವೇಶ್ವರನ ವಾಕ್ಯಗಳನ್ನು ಸರ್ವೇಶ್ವರನ ಆಲಯದೊಳಗೆ ಓದಿದನು.

9 ಯೋಷೀಯನ ಮಗನೂ ಜುದೇಯದ ಅರಸನೂ ಆದ ಯೆಹೋಯಾಕೀಮನ ಆಳ್ವಿಕೆಯ ಐದನೆಯ ವರ್ಷದ ಒಂಬತ್ತನೆಯ ತಿಂಗಳಲ್ಲಿ ಜೆರುಸಲೇಮಿನವರೆಲ್ಲರು ಹಾಗೂ ಜುದೇಯದ ಊರುಗಳಿಂದ ಜೆರುಸಲೇಮಿಗೆ ಬಂದಿದ್ದವರೆಲ್ಲರು ಸರ್ವೇಶ್ವರನ ಸಮ್ಮುಖದಲ್ಲಿ ಉಪವಾಸ ವ್ರತವನ್ನು ಗೊತ್ತುಮಾಡಿ ಪ್ರಕಟಿಸಿದ್ದರು. 10ಆಗ ಬಾರೂಕನು ಸರ್ವೇಶ್ವರನ ಆಲಯದೊಳಗೆ, ಮೇಲಣ ಪ್ರಾಕಾರದಲ್ಲಿ, ಹೊಸಬಾಗಿಲ ಹತ್ತಿರ, ಲೇಖಕ ಶಾಫಾನನ ಮಗ ಗೆಮರ್ಯನ ಕೊಠಡಿಯಲ್ಲಿ ಸುರುಳಿಯಲ್ಲಿನ ಯೆರೆಮೀಯನ ಮಾತುಗಳನ್ನು ಜನರೆಲ್ಲರಿಗೂ ಕೇಳಿಸುವಂತೆ ಓದಿದನು.

### ರಾಜ್ಯಾಧಿಕಾರಿಗಳಿಗೆ ಸುರುಳಿಯ ಸುಳಿವು

11 ಶಾಫಾನನ ಮೊಮ್ಮಗನೂ ಗೆಮರ್ಯನ ಮಗನೂ ಆದ ಮೀಕಾಯನು ಸುರುಳಿಯಿಂದ ಓದಲಾದ ಸರ್ವೇಶ್ವರನ ವಾಕ್ಯಗಳನ್ನು ಕೇಳಿದನು. ಅಲ್ಲಿಂದ ಅರಮನೆಯಲ್ಲಿದ್ದ ಲೇಖಕನ ಕೊಠಡಿಗೆ ಇಳಿದು ಹೋದನು. 12ಅಲ್ಲಿ ಲೇಖಕ ಎಲೀಷಾಮನು, ಶೆಮಾಯನ ಮಗ ದೆಲಾಯನು, ಅಕ್ಬೋರನ ಮಗ ಎಲ್ನಾಥಾನನು, ಶಫಾನನ ಮಗ ಗೆಮರ್ಯನು, ಹನನೀಯನ ಮಗ ಚಿದ್ಕೀಯನು, ಹೀಗೆ

ರಾಜ್ಯಾಧಿಕಾರಿಗಳೆಲ್ಲರು ಕುಳಿತುಕೊಂಡಿದ್ದರು. 12ಮಿಕಾಯನು ತನ್ನ ಹಾಗೂ ಜನರ ಮುಂದೆ ಗ್ರಂಥ ಸುರುಳಿಯಿಂದ ಬಾರೂಕನು ಓದಿ ಹೇಳಿದ್ದ ಎಲ್ಲ ಮಾತುಗಳನ್ನು ಅವರಿಗೆ ತಿಳಿಸಿದನು. 14ಅಧಿಕಾರಿಗಳೆಲ್ಲರು ಸೇರಿ, ನೆಥನ್ಯನ ಮಗನೂ ಶೆಲೆಮ್ಯನ ಮೊಮ್ಮಗನೂ ಕೂಷಿಯ ಮರಿಮಗನೂ ಆದ ಯೆಹೂದಿಯನನ್ನು ಬಾರೂಕನ ಬಳಿಗೆ ಕಳಿಸಿದರು. 'ನೀನು ಜನರ ಮುಂದೆ ಓದಿದ ಸುರುಳಿಯನ್ನು ನಿನ್ನ ಕೈಯಲ್ಲಿ ತೆಗೆದುಕೊಂಡು ಬಾ' ಎಂದು ಹೇಳಿ ಕಳಿಸಿದರು. ಅಂತೆಯೆ ನೇರೀಯನ ಮಗ ಬಾರೂಕನು ಸುರುಳಿಯನ್ನು ತನ್ನ ಕೈಯಲ್ಲೆ ತೆಗೆದುಕೊಂಡು ಅವರ ಬಳಿಗೆ ಕೂಡಲೇ ಬಂದನು. 15ಅಧಿಕಾರಿಗಳು ಅವನಿಗೆ, "ನೀನು ಇಲ್ಲಿ ಕುಳಿತುಕೊಂಡು ಅದನ್ನು ನಮ್ಮ ಮುಂದೆ ಓದು" ಎಂದು ಸ್ವಾಗತಿಸಿದರು. ಬಾರೂಕನು ಅವರ ಮುಂದೆ ಓದಿದನು. 16ಆ ಎಲ್ಲ ಮಾತುಗಳನ್ನು ಅವರು ಕೇಳಿ ತಳಮಳಗೊಂಡು ಒಬ್ಬರನ್ನೊಬ್ಬರು ನೋಡಿದರು. "ನಾವು ಈ ಮಾತುಗಳನ್ನೆಲ್ಲ ಅರಸನಿಗೆ ತಿಳಿಸಲೇಬೇಕು" ಎಂದು ಬಾರೂಕನಿಗೆ ಹೇಳಿದರು. 17"ನೀನು ಈ ಮಾತುಗಳನ್ನೆಲ್ಲ ಹೇಗೆ ಬರೆದೆ? ಅವನ ಬಾಯಿಂದ ಬಂದ ಹಾಗೆಯೇ ಬರೆದೆಯೋ ಇಲ್ಲವೋ ನಮಗೆ ತಿಳಿಸು," ಎಂದು ವಿನಂತಿಸಿದರು.

18 ಅದಕ್ಕೆ ಬಾರೂಕನು ಅವರಿಗೆ, "ಈ ಮಾತುಗಳೆಲ್ಲ ಯೆರೆಮೀಯನ ಬಾಯಿಂದಲೇ ಬಂದವುಗಳು. ಅವನು ನುಡಿದ ಹಾಗೆ ನಾನು ಅವುಗಳನ್ನು ಶಾಯಿಯಿಂದ ಈ ಸುರುಳಿಯಲ್ಲಿ ಬರೆದೆ," ಎಂದು ಉತ್ತರಕೊಟ್ಟನು. 19ಆಗ ರಾಜ್ಯಾಧಿಕಾರಿಗಳು ಬಾರೂಕನಿಗೆ, ನೀನೂ ಯೆರೆಮೀಯನೂ ಹೊರಟುಹೋಗಿ ಅವಿತುಕೊಳ್ಳಬೇಕು. ನೀವು ಇಲ್ಲಿದ್ದೀರೆಂದು ಯಾರಿಗೂ ಗೊತ್ತಾಗಬಾರದು," ಎಂದು ಹೇಳಿದರು.

### ಬೆಂಕಿ ಪಾಲಾದ ಸುರುಳಿ

20 ಅಧಿಕಾರಿಗಳು ಸುರುಳಿಯನ್ನು ಲೇಖಕ ಎಲೀಷಾಮನ ಕೊಠಡಿಯಲ್ಲಿ ಇಟ್ಟು ಬಿಟ್ಟು, ಪ್ರಾಕಾರದಲ್ಲಿದ್ದ ಅರಸನ ಬಳಿಗೆ ಹೋಗಿ, ಈ ಮಾತುಗಳನ್ನೆಲ್ಲ ಅರಿಕೆ ಮಾಡಿದರು. ಅರಸನು ಕೂಡಲೆ ಸುರುಳಿಯನ್ನು ತರಬೇಕೆಂದು ಯೆಹೂದಿಯನ್ನು ಕಳಿಸಿದನು. 21ಅವನು ಲೇಖಕ ಎಲೀಷಾಮನ ಕೊಠಡಿಯಿಂದ ಅದನ್ನು ತೆಗೆದುಕೊಂಡು ಬಂದು ಅರಸನ ಮತ್ತು ಅವನ ಪಕ್ಕದಲ್ಲಿ ನಿಂತಿದ್ದ ಎಲ್ಲ ರಾಜ್ಯಾಧಿಕಾರಿಗಳ ಮುಂದೆ ಓದಿದನು. 22ಅದು ವರ್ಷದ ಒಂಬತ್ತನೇ ತಿಂಗಳು. ಅರಸನು ಚಳಿಗಾಲದ ಮನೆಯಲ್ಲಿ ಕುಳಿತಿದ್ದನು. ಅವನ ಮುಂದೆ ಅಗ್ಗಿಷ್ಟಿಕೆ ಉರಿಯುತ್ತಿತ್ತು 23ಯೆಹೂದಿ ಬರವಣಿಗೆಯ ಮೂರು ನಾಲ್ಕು ಪುಟಗಳನ್ನು ಓದಿದ ಹಾಗೆಲ್ಲಾ ಅರಸನು ಆಯಾ ಭಾಗಗಳನ್ನು ಚೂರಿಯಿಂದ ಕತ್ತರಿಸಿ ಸುರುಳಿ ಸಂಪೂರ್ಣವಾಗಿ ಸುಟ್ಟುಹೋಗುವತನಕ ಅಗ್ಗಿಷ್ಟಿಕೆಯ ಬೆಂಕಿಯಲ್ಲಿ ಹಾಕುತ್ತಾ ಬಂದನು. 24ಅರಸನೇ ಆಗಲಿ, ಅವನ ಸೇವಕರಲ್ಲಿ ಯಾರೇ ಆಗಲಿ, ಸುರುಳಿಯ ಮಾತುಗಳನ್ನೆಲ್ಲಾ ಕೇಳಿಯೂ ಭಯಪಡಲಿಲ್ಲ. ದುಃಖಸೂಚನೆಗಾಗಿ ತಮ್ಮ ಬಟ್ಟೆಯನ್ನು ಹರಿದುಕೊಳ್ಳಲಿಲ್ಲ. 25ಎಲ್ನಾಥಾನನು, ದೆಲಾಯನು ಹಾಗೂ ಗೆಮರ್ಯನು ಅರಸನಿಗೆ ಸುರುಳಿಯನ್ನು ಸುಡಬಾರದೆಂದು ವಿನಯದಿಂದ ವಿಜ್ಞಾಪನೆ ಮಾಡಿದರೂ ಅವನು ಕೇಳಲಿಲ್ಲ. 26ಬದಲಿಗೆ ರಾಜ ವಂಶೀಯನಾದ ಎರಖ್ಮೆಯೇಲ, ಅಜ್ರಿಯೇಲನ ಮಗ ಸೆರಾಯ, ಅಬ್ದೆಯೇಲನ ಮಗ ಶೆಲೆಮ್ಯ, ಇವರಿಗೆ ಲೇಖಕನಾದ ಬಾರೂಕನನ್ನು ಮತ್ತು ಪ್ರವಾದಿ ಯೆರೆಮೀಯನನ್ನು ಸೆರೆಹಿಡಿಯಬೇಕೆಂದು ಆಜ್ಞಾಪಿಸಿದನು. ಆದರೆ ಸರ್ವೇಶ್ವರ ಅವರನ್ನು ಮರೆಯಲ್ಲಿಟ್ಟಿದ್ದರು.

### ಯೆರೆಮೀಯನಿಂದ ಮತ್ತೊಂದು ಸುರುಳಿ ರಚನೆ

27 ಯೆರೆಮೀಯನ ಬಾಯಿಂದ ಬಂದ ಹಾಗೆ ಬಾರೂಕನು ಬರೆದಿದ್ದ ಸುರುಳಿಯನ್ನು ಅರಸನು ಸುಟ್ಟು ಹಾಕಿದ ಮೇಲೆ ಯೆರೆಮೀಯನಿಗೆ ಸರ್ವೇಶ್ವರನಿಂದ ಈ ವಾಣಿ ಕೇಳಿಬಂದಿತು: 28"ನೀನು ಇನ್ನೊಂದು ಸುರುಳಿಯನ್ನು ತೆಗೆದುಕೊಂಡು ಜುದೇಯದ ಅರಸ ಯೆಹೋಯಾಕೀಮನು ಸುಟ್ಟ ಮೊದಲನೆಯ ಸುರುಳಿಯಲ್ಲಿದ್ದ ಹಿಂದಿನ ಆ ಮಾತುಗಳನ್ನೆಲ್ಲ ಪುನಃ ಬರೆಯಿಸು. 29ಅದೂ ಅಲ್ಲದೆ ಜುದೇಯದ ಅರಸ ಯೆಹೋಯಾಕೀಮನ ವಿಷಯದಲ್ಲಿ ಹೀಗೆ ಬರೆಯಿಸು: 'ಸರ್ವೇಶ್ವರ ಹೀಗೆಂದಿದ್ದಾರೆ – ಬಾಬಿಲೋನಿನ ಅರಸನು ಬಂದು ಈ ನಾಡನ್ನು ಜನ ಅಥವಾ ಜಾನುವಾರುಗಳಿಲ್ಲದಂತೆ

ಹಾಳುಮಾಡುವುದು ಖಂಡಿತ ಎಂದು ಈ ಸುರುಳಿಯಲ್ಲಿ ಬರೆಸಿದ್ದು ಏಕೆ ಎಂದು ಪ್ರಶ್ನಿಸಿ, ಆಕ್ಷೇಪಿಸಿ ಅದನ್ನು
ನೀನು ಸುಟ್ಟುಬಿಟ್ಟಿಯಲ್ಲವೆ? 30ಈ ಕಾರಣ ಜುದೇಯದ ಅರಸ ಯೆಹೋಯಾಕೀಮನು ಆದ ನಿನ್ನ ವಿರುದ್ಧ
ಸರ್ವೇಶ್ವರ ಹೀಗೆನ್ನುತ್ತಾರೆ – ಇವನ ಸಂತಾನದಲ್ಲಿ ಯಾವನೂ ದಾವೀದನ ಸಿಂಹಾಸನದಲ್ಲಿ ಕೂರನು.
ಇವನ ಹೆಣವು ಬಿಸಾಡಲ್ಪಟ್ಟು ಹಗಲಿನ ತಾಪಕ್ಕೂ ಇರುಳಿನ ಚಳಿಗೂ ಈಡಾಗುವುದು. 31ಅರಸನನ್ನೂ
ಅವನ ಸಂತತಿ ಹಾಗೂ ಸೇವಕರನ್ನೂ ಅವರು ಮಾಡಿದ ಅಧರ್ಮಕ್ಕಾಗಿ ದಂಡಿಸುವೆನು. ನಾನು ಇವರನ್ನು,
ಜೆರುಸಲೇಮಿನವರನ್ನು ಹಾಗೂ ಯೆಹೂದ್ಯರನ್ನು 'ನಿಮಗೆ ದೊಡ್ಡ ಕೇಡಾಗಲಿದೆ' ಎಂದು ಎಚ್ಚರಿಸಿದರೂ
ಅವರು ಕೇಳಲಿಲ್ಲ. ಆದ್ದರಿಂದ ಆ ಕೇಡನ್ನೆಲ್ಲಾ ಇವರೆಲ್ಲರ ಮೇಲೆ ಬರಮಾಡುವೆನು'."

32 ಆಗ ಯೆರೆಮೀಯನು ಇನ್ನೊಂದು ಸುರುಳಿಯನ್ನು ತೆಗೆದುಕೊಂಡು ನೇರೀಯನ ಮಗನಾದ
ಲೇಖಕ ಬಾರೂಕನಿಗೆ ಕೊಟ್ಟನು. ಅವನು ಅದರಲ್ಲಿ ಜುದೇಯದ ಅರಸ ಯೆಹೋಯಾಕೀಮನು ಬೆಂಕಿಯಲ್ಲಿ
ಸುಟ್ಟ ಗ್ರಂಥದ ಎಲ್ಲ ಮಾತುಗಳನ್ನು ಬರೆದನು. ಅದು ಮಾತ್ರವಲ್ಲ, ಅಂಥ ಅನೇಕ ಮಾತುಗಳನ್ನೂ
ಯೆರೆಮೀಯನ ಬಾಯಿಂದ ಬಂದ ಹಾಗೆ ಬರೆದನು.

### ಯೆರೆಮೀಯನಲ್ಲಿ ಚಿದ್ಕೀಯನು ಮಾಡಿದ ಮನವಿ

**37** ಯೋಷೀಯನ ಮಗ ಚಿದ್ಕೀಯನು ಯೆಹೋಯಾಕೀಮನ ಮಗ ಕೊನ್ಯನಿಗೆ ಬದಲಾಗಿ
ರಾಜ್ಯವಾಳುತ್ತಿದ್ದನು. ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ಅವನನ್ನು ಜುದೇಯದ ನಾಡಿಗೆ
ಅರಸನನ್ನಾಗಿಸಿದ್ದನು. 2ಆದರೆ ಚಿದ್ಕೀಯನಾಗಲಿ, ಅವನ ಸೇವಕರಾಗಲಿ, ನಾಡಿನ ಜನರಾಗಲಿ ಸರ್ವೇಶ್ವರನು
ಪ್ರವಾದಿ ಯೆರೆಮೀಯನಿಂದ ನುಡಿಸಿದ ಮಾತುಗಳನ್ನು ಕೇಳದೆಹೋದರು.

3 ಹೀಗಿರುವಲ್ಲಿ ಅರಸ ಚಿದ್ಕೀಯನು ಶೆಲೆಮ್ಯನ ಮಗ ಯೆಹೂಕಲನನ್ನು ಮತ್ತು ಯಾಜಕ
ಮಾಸೇಯನ ಮಗ ಚೆಫನ್ಯನನ್ನು ಯೆರೆಮೀಯನ ಬಳಿಗೆ ಕಳಿಸಿ, "ನಮಗಾಗಿ ನಮ್ಮ ದೇವರಾದ
ಸರ್ವೇಶ್ವರನನ್ನು ಪ್ರಾರ್ಥಿಸು" ಎಂದು ವಿನಂತಿಸಿದನು. 4ಆಗ ಯೆರೆಮೀಯನು ಇನ್ನೂ ಸೆರೆಯಾಗಿರಲಿಲ್ಲ.
ಜನರಲ್ಲಿಗೆ ಹೋಗುತ್ತಾ ಬರುತ್ತಿದ್ದನು. 5ಅಷ್ಟರಲ್ಲಿ ಫರೋಹನ ಸೈನ್ಯವು ಈಜಿಪ್ಟಿನಿಂದ ಹೊರಟಿತ್ತು. ಈ
ಸಂಗತಿಯನ್ನು ಕೇಳಿ, ಜೆರುಸಲೇಮನ್ನು ಈಗಾಗಲೆ ಮುತ್ತಿದ್ದ ಬಾಬಿಲೋನಿಯದ ಸೈನಿಕರು ಅದನ್ನು ಬಿಟ್ಟು
ಹೋಗಿದ್ದರು.

6 ಈ ಸಂದರ್ಭದಲ್ಲಿ ಪ್ರವಾದಿ ಯೆರೆಮೀಯನಿಗೆ ಸರ್ವೇಶ್ವರನಿಂದ ಕೇಳಿ ಬಂದ ವಾಣಿ:
7"ಇಸ್ರಯೇಲರ ದೇವರಾದ ಸರ್ವೇಶ್ವರ ಹೀಗೆ ಎನ್ನುತ್ತಾರೆ – ನನ್ನ ಅಭಿಪ್ರಾಯವನ್ನು ವಿಚಾರಿಸಲು
ನಿಮ್ಮನ್ನು ನನ್ನ ಬಳಿಗೆ ಕಳಿಸಿದ ಜುದೇಯದ ಅರಸನಿಗೆ ಹೀಗೆಂದು ಹೇಳಿರಿ: 'ಇಗೋ, ನಿಮ್ಮ ಸಹಾಯಕ್ಕೆ
ಹೊರಟಿರುವ ಫರೋಹನ ಸೈನ್ಯವು ಸ್ವದೇಶಕ್ಕೆ ಹಿಂದಿರುಗುವುದು. 8ಬಾಬಿಲೋನಿಯದವರು ಪುನಃ ಬಂದು
ಈ ನಗರದ ಮೇಲೆ ದಾಳಿ ನಡೆಸುವರು. ಇದನ್ನು ಆಕ್ರಮಿಸಿ ಬೆಂಕಿಯಿಂದ ಸುಟ್ಟುಹಾಕುವರು.' 9ಸರ್ವೇಶ್ವರ
ಇಂತೆನ್ನುತ್ತಾರೆ: – ಬಾಬಿಲೋನಿಯರು ನಿಮ್ಮಿಂದ ಖಂಡಿತವಾಗಿ ತೊಲಗಿಹೋಗುವರು ಎಂದುಕೊಂಡು
ನಿಮ್ಮನ್ನು ನೀವೇ ಮೋಸಪಡಿಸಿಕೊಳ್ಳಬೇಡಿ. ಅವರು ಹೋಗುವುದಿಲ್ಲ. 10ದಾಳಿ ಮಾಡುವ ಆ
ಬಾಬಿಲೋನಿಯರನ್ನು ನೀವು ಪೂರ್ತಿಯಾಗಿ ಸೋಲಿಸಿದರೂ, ಅವರಲ್ಲಿ ಗಾಯಗೊಂಡವರು ಮಾತ್ರ
ನಿಮ್ಮಲ್ಲಿ ಉಳಿದರೂ, ಆ ಗಾಯಗೊಂಡವರೇ ತಮ್ಮ ತಮ್ಮ ಗುಡಾರಗಳಿಂದ ಎದ್ದುಬಂದು ಈ ನಗರವನ್ನು
ಬೆಂಕಿಯಿಂದ ಸುಟ್ಟುಬಿಡುವರು.

### ಯೆರೆಮೀಯನು ಮರಳಿ ಸೆರೆಯಲ್ಲಿ

11 ಬಾಬಿಲೋನಿಯದ ಸೈನ್ಯವು ಫರೋಹನ ಸೈನ್ಯಕ್ಕೆ ಭಯಪಟ್ಟು ಜೆರುಸಲೇಮನ್ನು ಬಿಟ್ಟು
ಹೋಯಿತು. 12ಆಗ ಯೆರೆಮೀಯನು ಬೆನ್ಯಾಮೀನ್ ನಾಡಿನಲ್ಲಿ ತನಗೆ ಬರಬೇಕಾಗಿದ್ದ ಸೊತ್ತನ್ನು ಜನರ
ಸಮಕ್ಷಮದಲ್ಲಿ ತೆಗೆದುಕೊಳ್ಳಲು ಜೆರುಸಲೇಮಿನಿಂದ ಅಲ್ಲಿಗೆ ಹೊರಟನು. 13ಬೆನ್ಯಾಮೀನನ ಬಾಗಿಲನ್ನು
ಹಾದು ಹೋಗುತ್ತಿರುವಾಗ ಶೆಲೆಮ್ಯನ ಮಗನೂ ಹನನ್ಯನ ಮೊಮ್ಮಗನೂ ಆದ ಇರೀಯನು ಅಲ್ಲಿ ಪಹರೆ

ಕುಳಿತಿದ್ದನು. ಅವನು ಪ್ರವಾದಿ ಯೆರೆಮೀಯನನ್ನು, "ನೀನು ಬಾಬಿಲೋನಿಯರನ್ನು ಮರೆಹೋಗಲು ಹೋಗುತ್ತಿರುವೆ," ಎಂದು ಹೇಳಿ ಅವನನ್ನು ಬಂಧಿಸಿದನು.

14 ಅದಕ್ಕೆ ಯೆರೆಮೀಯನು, "ಅದು ಸುಳ್ಳು, ನಾನು ಬಾಬಿಲೋನಿಯರನ್ನು ಮರೆಹೋಗುವವನಲ್ಲ," ಎಂದನು. ಇರೀಯನು ಅವನ ಮಾತನ್ನು ಕೇಳದೆ ಅವನನ್ನು ಬಂಧಿಸಿ, ಪದಾಧಿಕಾರಿಗಳ ಬಳಿಗೆ ಕರೆತಂದನು.
15ಆ ಅಧಿಕಾರಿಗಳು ಯೆರೆಮೀಯನ ಮೇಲೆ ಕೋಪಗೊಂಡು ಅವನನ್ನು ಹೊಡೆಯಿಸಿ, ತಾವು ಬಂದಿಖಾನೆಯನ್ನಾಗಿ ಮಾಡಿದ್ದ ಲೇಖಕ ಯೆಹೋನಾಥಾನನ ಮನೆಯಲ್ಲಿ ಸೆರೆಹಾಕಿಸಿದರು.
16ಯೆರೆಮೀಯನು ಆ ಬಂದಿಖಾನೆಯ ನೆಲಮನೆಗಳಲ್ಲಿ ಕೆಲವು ದಿವಸ ಇದ್ದನು.

17 ಬಳಿಕ ಅರಸ ಚಿದ್ಕೀಯನು ಅವನನ್ನು ಕರೆಯಿಸಿ, "ದೇವರಿಂದ ಯಾವುದಾದರು ಸಂದೇಶ ದೊರೆಯಿತೊ?" ಎಂದು ಮನೆಯಲ್ಲಿ ಗುಟ್ಟಾಗಿ ವಿಚಾರಿಸಿದನು. ಯೆರೆಮೀಯನು, "ಹೌದು, ದೊರೆಯಿತು. ತಾವು ಬಾಬಿಲೋನಿನ ಅರಸನ ಕೈಗೆ ಸಿಕ್ಕಿಬೀಳುವಿರಿ," ಎಂದನು.
18ಅಲ್ಲದೆ ಯೆರೆಮೀಯನು ಅರಸ ಚಿದ್ಕೀಯನಿಗೆ, "ನೀವು ನನ್ನನ್ನು ಸೆರೆಯಲ್ಲಿ ಹಾಕಿದ್ದಕ್ಕೆ ನಾನು ನಿಮಗಾಗಲಿ, ನಿಮ್ಮ ಸೇವಕರಿಗಾಗಲಿ, ಇಲ್ಲಿಯ ಜನರಿಗಾಗಲಿ ಮಾಡಿದ ಅಪರಾಧವೇನು?
19'ಬಾಬಿಲೋನಿನ ಅರಸನು ನಿಮಗೂ ಈ ನಾಡಿಗೂ ವಿರುದ್ಧವಾಗಿ ಆಕ್ರಮಣ ನಡೆಸನು' ಎಂದು ಸಾರಿದ ನಿಮ್ಮ ಪ್ರವಾದಿಗಳು ಈಗ ಎಲ್ಲಿ?
20ಎನ್ನೊಡೆಯರೇ, ಅರಸರೇ, ದಯವಿಟ್ಟು ಆಲಿಸಿ: ಲೇಖಕ ಯೆಹೋನಾಥಾನನ ಮನೆಗೆ ನನ್ನನ್ನು ಮತ್ತೆ ಕಳಿಸಬೇಡಿ. ಕಳಿಸಿದರೆ ನಾನು ಅಲ್ಲೇ ಸತ್ತೇನು. ನನ್ನ ಈ ಬಿನ್ನಹವನ್ನು ಅಂಗೀಕರಿಸಿ," ಎಂದು ಅರಿಕೆಮಾಡಿದನು.

21 ಆಗ ಅರಸ ಚಿದ್ಕೀಯನು ಅಂತೆಯೆ ಅಪ್ಪಣೆಕೊಡಲು, ಯೆರೆಮೀಯನನ್ನು ರಾಜ್ಯದ ಕಾರಾಗೃಹದ ಅಂಗಳಕ್ಕೆ ಸ್ಥಳಾಂತರಿಸಲಾಯಿತು. ರೊಟ್ಟಿ ಮಾರುಕಟ್ಟೆಯಿಂದ ಪ್ರತೀದಿನ ಒಂದೊಂದು ರೊಟ್ಟಿಯನ್ನು ಅವನಿಗೆ ತಂದು ಕೊಡುತ್ತಿದ್ದರು. ನಗರದ ರೊಟ್ಟಿಯೆಲ್ಲ ತೀರುವ ತನಕ ಹಾಗೆ ಮಾಡುತ್ತಿದ್ದರು. ಯೆರೆಮೀಯನು ರಾಜ್ಯದ ಕಾರಾಗೃಹದ ಅಂಗಳದಲ್ಲೇ ವಾಸಿಸುತ್ತಿದ್ದನು.

## ನೀರಿಲ್ಲದ ಬಾವಿಯಲ್ಲಿ ಯೆರೆಮೀಯನು

**38** ಯೆರೆಮೀಯನು ಜನರೆಲ್ಲರಿಗೆ, "ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: ನಗರದಲ್ಲಿ ನಿಲ್ಲುವವನು ಖಡ್ಗ-ಕ್ಷಾಮ-ವ್ಯಾಧಿಗಳಿಂದ ಸಾಯುವನು. ನಗರವನ್ನು ಬಿಟ್ಟು ಹೋಗಿ ಬಾಬಿಲೋನಿಯರನ್ನು ಮರೆಹೋಗುವವನು ಬದುಕುವನು. ತನ್ನ ಪ್ರಾಣವೊಂದನ್ನಾದರೂ ಬಾಚಿಕೊಂಡು ಹೋಗಿ ಬದುಕುವನು.
2ಬಾಬಿಲೋನಿನ ಅರಸನು ಈ ನಗರವನ್ನು ಆಕ್ರಮಿಸುವನು. ಇದು ಅವನ ವಶವಾಗುವುದು ನಿಶ್ಚಯ" ಎಂದು ಸಾರುತ್ತಿದ್ದನು.
3ಮತ್ತಾನನ ಮಗ ಶೆಫತ್ಯ, ಷಷ್ಞೂರನ ಮಗ ಗೆದಲ್ಯ, ಸೆಲೆಮ್ಯನ ಮಗ ಯೂಕಲ, ಹಾಗೂ ಮಲ್ಕೀಯನ ಮಗ ಷಷ್ಞೂರ ಇವರು ಮೇಲೆ ಹೇಳಿದ ಮಾತುಗಳನ್ನು ಕೇಳಿದರು.

4 ಈ ಪದಾಧಿಕಾರಿಗಳು ಅರಸನ ಬಳಿಗೆ ಬಂದು, "ಒಡೆಯಾ, ಈ ಯೆರೆಮೀಯನಿಗೆ ಮರಣ ದಂಡನೆಯಾಗಬೇಕು. ಇವನು ನಗರದಲ್ಲಿರುವ ಸೈನಿಕರಿಗೂ ಜನರೆಲ್ಲರಿಗೂ ಇಂಥ ಭವಿಷ್ಯವನ್ನು ನುಡಿಯುತ್ತಾ ಅವರು ಎದೆಗುಂದುವಂತೆ ಮಾಡುತ್ತಿದ್ದಾನೆ. ಅವನು ಹಾರೈಸುವುದು ಜನರ ಕ್ಷೇಮವನ್ನಲ್ಲ ಹಾನಿಯನ್ನೇ," ಎಂದು ದೂರಿತ್ತರು.

5 ಅದಕ್ಕೆ ಅರಸ ಚಿದ್ಕೀಯನು, "ಇಗೋ, ಯೆರೆಮೀಯನು ನಿಮ್ಮ ಕೈಯಲ್ಲಿದ್ದಾನೆ. ಅರಸನು ನಿಮಗೆ ಅಡ್ಡಬಂದು ಏನೂ ಮಾಡಬಲ್ಲವನಲ್ಲ," ಎಂದನು.
6ಅವರು ಯೆರೆಮೀಯನನ್ನು ಹಿಡಿದು ಕಾರಾಗೃಹದ ಅಂಗಳದಲ್ಲಿದ್ದ ರಾಜ ವಂಶೀಯನಾದ ಮಲ್ಕೀಯನ ಬಾವಿಯೊಳಗೆ ಹಗ್ಗಗಳಿಂದ ಇಳಿಸಿ ಅಲ್ಲೇ ಬಿಟ್ಟುಬಿಟ್ಟರು. ಆ ಬಾವಿಯಲ್ಲಿ ನೀರಿರಲಿಲ್ಲ, ಕೆಸರಿತ್ತು. ಯೆರೆಮೀಯನು ಅದರೊಳಗೆ ಹೂತುಕೊಂಡನು.

7 ಅರಮನೆಯ ಕಂಚುಕಿಯಾದ ಎಬೆದ್ಮೆಲೆಕನೆಂಬ ಸುಡಾನಿನವನು ಯೆರೆಮೀಯನನ್ನು ಬಾವಿಯಲ್ಲಿ ಹಾಕಿದ್ದಾರೆಂದು ತಿಳಿದುಕೊಂಡನು.
8ಅವನು ಅರಮನೆಯಿಂದ ಹೊರಟು, ಬೆನ್ಯಾಮೀನಿನ ಬಾಗಿಲಿನಲ್ಲಿ ಕುಳಿತುಕೊಂಡಿದ್ದ ಅರಸನ ಬಳಿಗೆ ಬಂದು,
9"ನನ್ನೊಡೆಯಾ, ಅರಸರೇ, ಈ ಜನರು ಪ್ರವಾದಿ ಯೆರೆಮೀಯನಿಗೆ ಮಾಡಿರುವುದೆಲ್ಲ ದುಷ್ಟಕಾರ್ಯವೇ ಸರಿ. ಅವನನ್ನು ಬಾವಿಯಲ್ಲಿ ಹಾಕಿದ್ದಾರೆ. ಆಹಾರವಿಲ್ಲದೆ

ಅವನು ಬಿದ್ದಲ್ಲೇ ಸಾಯುವುದು ಖಚಿತ. ಏಕೆಂದರೆ ನಗರದಲ್ಲಿ ರೊಟ್ಟಿಯೆಲ್ಲಾ ತೀರಿಹೋಗಿದೆ," ಎಂದು
ಅರಿಕೆ ಮಾಡಿದನು. 10ಇದನ್ನು ಕೇಳಿದ ಅರಸನು ಸುಡಾನಿನ ಎಬೆದ್ಮೆಲೆಕನಿಗೆ, "ನೀನು ಇಲ್ಲಿಂದ ಮೂವತ್ತು
ಮಂದಿ ಆಳುಗಳನ್ನು ಕರೆದುಕೊಂಡು ಹೋಗಿ ಪ್ರವಾದಿ ಯೆರೆಮೀಯನು ಸಾಯುವ ಮೊದಲೇ, ಅವನನ್ನು
ಬಾವಿಯಿಂದ ಎತ್ತಿಸು," ಎಂದು ಅಪ್ಪಣೆಕೊಟ್ಟನು. 11ಕೂಡಲೇ ಸುಡಾನಿನ ಎಬೆದ್ಮೆಲೆಕನು ಆಳುಗಳನ್ನು
ಕರೆದುಕೊಂಡು ಹೋಗಿ, ಅರಮನೆಯನ್ನು ಹೊಕ್ಕು, ಖಜಾನೆಯ ಕೆಳಗಣ ಕೋಣೆಯಿಂದ ಹಳೆಯ ಹರಕು
ಚಿಂದಿಪಂದಿಗಳನ್ನು ತೆಗೆದುಕೊಂಡು, ಹಗ್ಗಕ್ಕೆ ಕಟ್ಟಿ ಬಾವಿಯೊಳಗಿದ್ದ ಯೆರೆಮೀಯನಿಗೆ ಮುಟ್ಟಿಸಿದನು.
12"ಹಳೆಯ ಈ ಹರಕು ಚಿಂದಿಗಳನ್ನು ಹಗ್ಗಕ್ಕೆ ಸುತ್ತಿ ಕಂಕುಳಲ್ಲಿ ಇಟ್ಟುಕೋ" ಎನ್ನಲು ಯೆರೆಮೀಯನು
ಅದರಂತೆಯೇ ಮಾಡಿದನು. 13ಈ ಪ್ರಕಾರ ಯೆರೆಮೀಯನನ್ನು ಹಗ್ಗಗಳ ಮೂಲಕ ಸೇದಿಕೊಂಡು
ಬಾವಿಯಿಂದ ಮೇಲಕ್ಕೆ ಎತ್ತಿದರು. ಬಳಿಕ ಯೆರೆಮೀಯನು ಹಿಂದಿನಂತೆ ಕಾರಾಗೃಹದ ಅಂಗಳದಲ್ಲಿ
ವಾಸಿಸುತ್ತಿದ್ದನು.

**ಯೆರೆಮೀಯ ಮತ್ತು ಚಿದ್ಕೀಯನ ನಡುವೆ ಕೊನೆಯ ಸಂವಾದ**

14 ಅರಸ ಚಿದ್ಕೀಯನು ಪ್ರವಾದಿ ಯೆರೆಮೀಯನನ್ನು ಸರ್ವೇಶ್ವರನ ಆಲಯದ ಮೂರನೆಯ ಬಾಗಿಲ ಬಳಿಗೆ ಕರೆತರಿಸಿ, "ನಾನು ನಿನ್ನಲ್ಲಿ ಒಂದು ವಿಷಯವನ್ನು ಕೇಳುತ್ತೇನೆ, ನನಗೆ ಏನನ್ನೂ ಮರೆಮಾಡಬೇಡ," ಎಂದನು.

15 ಯೆರೆಮೀಯನು ಚಿದ್ಕೀಯನಿಗೆ, "ನಾನು ತಮಗೆ ಇದ್ದದ್ದನ್ನು ಇದ್ದಹಾಗೆ ಹೇಳಿದರೆ ತಾವು ನನ್ನನ್ನು ಕೊಂದುಹಾಕುವುದು ನಿಶ್ಚಯವಲ್ಲವೆ? ನಾನು ತಮಗೆ ಬುದ್ಧಿವಾದ ಹೇಳಿದರೆ ತಾವು ಕೇಳುವುದಿಲ್ಲ," ಎಂದು ಉತ್ತರಕೊಟ್ಟನು.

16 ಅದಕ್ಕೆ ಅರಸ ಚಿದ್ಕೀಯನು, "ನಮಗೆ ಈ ಪ್ರಾಣವನ್ನು ದಯಪಾಲಿಸಿದ ಸರ್ವೇಶ್ವರನ ಜೀವದಾಣೆ, ನಾನು ನಿನ್ನನ್ನು ಕೊಂದುಹಾಕುವುದಿಲ್ಲ. ನಿನ್ನ ಪ್ರಾಣವನ್ನು ಹುಡುಕುವ ಈ ಜನರ ಕೈಗೂ ನಿನ್ನನ್ನು ಸಿಕ್ಕಿಸುವುದಿಲ್ಲ," ಎಂದು ಗುಟ್ಟಾಗಿ ಪ್ರಮಾಣಮಾಡಿ ಹೇಳಿದನು.

17 ಆಗ ಯೆರೆಮೀಯನು, "ಸೇನಾಧೀಶ್ವರ ಸರ್ವೇಶ್ವರನೂ ಇಸ್ರಯೇಲರ ದೇವರೂ ಆದ ಸ್ವಾಮಿ
ಹೀಗೆನ್ನುತ್ತಾರೆ: ತಾವು ಬಾಬಿಲೋನಿಯದ ಅರಸನ ಪದಾಧಿಕಾರಿಗಳ ಮೊರೆಹೊಕ್ಕರೆ ತಮ್ಮ ಪ್ರಾಣ
ಉಳಿಯುವುದು. ಈ ನಗರ ಬೆಂಕಿಯಿಂದ ಸುಟ್ಟುಹೋಗದು, ತಾವೂ ತಮ್ಮ ಮನೆಯವರೂ
ಮನೆತನದವರೂ ಬದುಕುವಿರಿ. 18ತಾವು ಬಾಬಿಲೋನಿಯದ ಅರಸನ ಪದಾಧಿಕಾರಿಗಳಿಗೆ
ಮೊರೆಹೋಗದಿದ್ದರೆ ಈ ನಗರವು ಬಾಬಿಲೋನಿನವರ ಕೈವಶವಾಗುವುದು. ಅವರು ಇದನ್ನು ಬೆಂಕಿ ಇಂದ
ಸುಟ್ಟುಬಿಡುವರು. ತಾವು ಅವರ ಕೈಯಿಂದ ತಪ್ಪಿಸಿಕೊಳ್ಳಲಾರಿರಿ," ಎಂದು ಹೇಳಿದನು.

19 ಇದನ್ನು ಕೇಳಿದ ಅರಸ ಚಿದ್ಕೀಯನು ಯೆರೆಮೀಯನಿಗೆ, "ಬಾಬಿಲೋನಿಯದವರು ತಮ್ಮನ್ನು ಮರೆಹೊಕ್ಕಿರುವ ಯೆಹೂದ್ಯರಿಗೆ ನನ್ನನ್ನು ಒಪ್ಪಿಸಬಹುದು. ಅವರು ನನ್ನನ್ನು ಹಿಂಸಿಸಬಹುದು ಎಂಬ ಸಂಶಯ ನನಗಿದೆ," ಎಂದು ಉತ್ತರಕೊಟ್ಟನು.

20 ಇದನ್ನು ಕೇಳಿದ ಯೆರೆಮೀಯನು, "ಇಲ್ಲ, ತಮ್ಮನ್ನು ಅವರ ಕೈಗೆ ಒಪ್ಪಿಸುವುದಿಲ್ಲ. ದಯವಿಟ್ಟು
ನಾನು ತಮಗೆ ಹೇಳಿರುವ ಸರ್ವೇಶ್ವರನ ವಾಕ್ಯದಂತೆ ನಡೆದುಕೊಳ್ಳಿ. ನಡೆದುಕೊಂಡರೆ ತಮ್ಮ ಪ್ರಾಣ
ಉಳಿಯುವುದು, ಒಳ್ಳೆಯದಾಗುವುದು. 21ತಾವು ಶತ್ರುವನ್ನು ಮರೆಹೋಗೆನು ಎನ್ನುವುದಾದರೆ ಸರ್ವೇಶ್ವರ
ತಮ್ಮ ಮುಂದಿನ ಗತಿಯನ್ನು ನನಗೆ ಹೀಗೆ ತೋರ್ಪಡಿಸಿದ್ದಾರೆ. 22ಜುದೇಯದ ಅರಸನ ಮನೆಯಲ್ಲಿ
ಉಳಿದಿರುವ ಎಲ್ಲ ಮಹಿಳೆಯರನ್ನು ಬಾಬಿಲೋನಿಯದ ಅರಸನ ದಳಪತಿಗಳ ಬಳಿಗೆ ತರಲಾಗುವುದು. ಆ
ಮಹಿಳೆಯರೇ:

'ಆಪ್ತ ಮಿತ್ರರು ನಿನ್ನನ್ನು ವಂಚಿಸಿ
ಒಳಪಡಿಸಿಕೊಂಡರು;
ನಿನ್ನ ಕಾಲುಗಳು ಬದಿಯಲ್ಲಿ
ಹೂತಿರುವುದನ್ನು ನೋಡಿಯೂ

ನಿನ್ನಿಂದ ದೂರವಾದರು'

ಎಂದು ತಮ್ಮನ್ನು ನಿಂದಿಸುವರು. 23ತಮ್ಮ ಎಲ್ಲ ಮಡದಿಯರನ್ನೂ ಮಕ್ಕಳನ್ನೂ ಬಾಬಿಲೋನಿಯರ ಬಳಿಗೆ ತರಲಾಗುವುದು. ತಾವು ತಪ್ಪಿಸಿಕೊಳ್ಳಲಾಗದೆ ಬಾಬಿಲೋನಿಯದ ಅರಸನ ಕೈಗೆ ಸಿಕ್ಕಿಕೊಳ್ಳುವಿರಿ. ಈ ನಗರವು ತಮ್ಮ ನಿಮಿತ್ತ ಬೆಂಕಿಯಿಂದ ಸುಟ್ಟುಹೋಗುವುದು," ಎಂದು ಹೇಳಿದನು.

24 ಆಗ ಚಿದ್ಕೀಯನು ಯೆರೆಮೀಯನಿಗೆ, "ಈ ಮಾತುಗಳು ಯಾರಿಗೂ ತಿಳಿಯದಿರಲಿ, ಜೋಕೆ! ತಿಳಿಯದಿದ್ದರೆ ನೀನು ಸಾಯುವುದಿಲ್ಲ. 25ನಾನು ನಿನ್ನ ಸಂಗಡ ಮಾತಾಡಿದ ಸುದ್ದಿಯನ್ನು ಪದಾಧಿಕಾರಿಗಳು ಕೇಳಿ ನಿನ್ನ ಬಳಿಗೆ ಬಂದು, 'ಅರಸನಿಗೆ ಏನು ಹೇಳಿದೆ? ನಮಗೆ ತಿಳಿಸು, ನಮಗೆ ಮರೆಮಾಡದೆ ತಿಳಿಸಿದರೆ ನಿನ್ನನ್ನು ಕೊಲ್ಲುವುದಿಲ್ಲ. ಅರಸನಿಗೆ ಏನು ಹೇಳಿದೆ? ತಿಳಿಸು, ಎಂದು ಪ್ರಶ್ನೆ ಹಾಕಿದರೆ 26ನೀನು ಅವರಿಗೆ, 'ಯೆಹೋನಾಥಾನನ ಮನೆಗೆ ನನ್ನನ್ನು ಮರಳಿ ಸೇರಿಸಬೇಡ. ಅಲ್ಲೇ ಸತ್ತೇನು ಎಂದು ಅರಸನಲ್ಲಿ ಬಿನ್ನಹ ಮಾಡಿಕೊಂಡೆ' ಎಂಬುದಾಗಿ ಹೇಳು," ಎಂದು ಅಪ್ಪಣೆ ಮಾಡಿದನು. 27ಕೆಲವು ದಿನಗಳಾದ ಮೇಲೆ ಎಲ್ಲ ಪದಾಧಿಕಾರಿಗಳು ಯೆರೆಮೀಯನ ಬಳಿಗೆ ಬಂದು ಹಾಗೆಯೇ ಪ್ರಶ್ನೆ ಮಾಡಿದರು. ಅವನು ಅರಸನ ಅಪ್ಪಣೆಯಂತೆಯೇ ಉತ್ತರಕೊಟ್ಟನು. ಅಷ್ಟಕ್ಕೆ ಮಾತು ಮುಗಿದು ಅವನಿಂದ ಏನೂ ತಿಳಿದುಕೊಳ್ಳಲಾಗಲಿಲ್ಲ. 28ಜೆರುಸಲೇಮ್ ಶತ್ರುವಶವಾಗುವ ತನಕ ಯೆರೆಮೀಯನು ಕಾರಾಗೃಹದ ಅಂಗಳದಲ್ಲೇ ವಾಸಿಸುತ್ತಿದ್ದನು.

### ಜೆರುಸಲೇಮಿನ ಪತನ

**39** ಜುದೇಯದ ಅರಸ ಚಿದ್ಕೀಯನ ಆಳ್ವಿಕೆಯ ಒಂಬತ್ತನೆಯ ವರ್ಷದ ಹತ್ತನೆಯ ತಿಂಗಳಲ್ಲಿ ಬಾಬಿಲೋನಿಯದ ಅರಸ ನೆಬೂಕದ್ನೆಚ್ಚರನು ಸಕಲ ಸೈನ್ಯಸಮೇತ ಬಂದು ಜೆರುಸಲೇಮನ್ನು ಮುತ್ತಿದನು. 2ಚಿದ್ಕೀಯನ ಹನ್ನೊಂದನೆಯ ವರ್ಷದ ನಾಲ್ಕನೆಯ ತಿಂಗಳಿನ ಒಂಬತ್ತನೆಯ ದಿನದಲ್ಲಿ ನಗರದ ಪೌಳಿಗೋಡೆ ಒಡಕು ಬಿದ್ದು ಜೆರುಸಲೇಮ್ ಶತ್ರುವಶವಾಯಿತು.

3 ನೇರ್ಗಲ್‌ಸರೆಚರ್, ಸಮ್ಗರ್‌ನೆಬೊ, ಕಂಚುಕಿಯರ ಮುಖ್ಯಸ್ಥನಾದ ಸರ್ಸೆಕೀಮ್, ಜೋಯಿಸರ ಮುಖ್ಯಸ್ಥ ನೇರ್ಗಲ್‌ಸರೆಚರ್, ಹೀಗೆ ಬಾಬಿಲೋನಿಯದ ಅರಸನ ಎಲ್ಲ ಪದಾಧಿಕಾರಿಗಳು ಪುರಪ್ರವೇಶಮಾಡಿ ಮಧ್ಯಮದ್ವಾರದೊಳಗೆ ಕುಳಿತುಕೊಂಡರು.

4 ಇವರನ್ನು ನೋಡಿ, ಜುದೇಯದ ಅರಸ ಚಿದ್ಕೀಯನು ಮತ್ತು ಸಮಸ್ತ ಸೈನಿಕರು ಅದೇ ರಾತ್ರಿಯಲ್ಲಿ ಹೊರಟು, ಅರಸನ ಉದ್ಯಾನ ಮಾರ್ಗವಾಗಿ ಎರಡು ಗೋಡೆಗಳ ನಡುವಣ ಬಾಗಿಲಿನಿಂದ ನಗರವನ್ನು ಬಿಟ್ಟು, ಅರಾಬಾ ಎಂಬ ಕಣಿವೆ ಪ್ರದೇಶದ ಕಡೆಗೆ ಪಲಾಯನ ಮಾಡಿದರು. 5ಬಾಬಿಲೋನಿಯದ ಸೈನಿಕರು ಅವರನ್ನು ಹಿಂದಟ್ಟುತ್ತಾ ಜೆರಿಕೋವಿನ ಬೈಲಿನಲ್ಲಿ ಚಿದ್ಕೀಯನನ್ನು ಹಿಡಿದರು. ಹಮಾತ್ ನಾಡಿನ ರಿಬ್ಲದಲ್ಲಿದ್ದ ಬಾಬಿಲೋನಿಯದ ಅರಸ ನೆಬೂಕದ್ನೆಚ್ಚರನ ಬಳಿಗೆ ಅವನನ್ನು ತೆಗೆದುಕೊಂಡು ಬಂದರು. 6ಆ ಬಾಬಿಲೋನಿಯದ ಅರಸನು ಅಲ್ಲೆ ಚಿದ್ಕೀಯನಿಗೆ ಶಿಕ್ಷೆಯನ್ನು ವಿಧಿಸಿದನು. ಅವನ ಮಕ್ಕಳನ್ನು ಅವನ ಕಣ್ಣೆದುರಿಗೇ ವಧಿಸಿದನು. ಜುದೇಯದ ಸಮಸ್ತ ಶ್ರೀಮಂತರನ್ನೂ ಕೊಲ್ಲಿಸಿದನು. 7ಇದಲ್ಲದೆ ಚಿದ್ಕೀಯನ ಕಣ್ಣುಗಳನ್ನು ಕೀಳಿಸಿ, ಬೇಡಿಹಾಕಿಸಿ, ಬಾಬಿಲೋನಿಗೆ ಸಾಗಿಸಿದನು. 8ಅರಮನೆಯನ್ನೂ ಪ್ರಜೆಗಳ ಮನೆಗಳನ್ನೂ ಬಾಬಿಲೋನಿಯದವರು ಬೆಂಕಿಯಿಂದ ಸುಟ್ಟು ಜೆರುಸಲೇಮಿನ ಸುತ್ತಣವಿದ್ದ ಗೋಡೆಗಳನ್ನು ಕೆಡವಿದರು. 9ರಕ್ಷಾದಳದ ನಾಯಕನಾದ ನೆಬೂಜರದಾನನು ನಗರದಲ್ಲಿ ಉಳಿದಿದ್ದವರನ್ನು ಹಾಗು ಮೊದಲೇ ತನ್ನನ್ನು ಮರೆಹೊಕ್ಕಿದವರನ್ನು ಮತ್ತಿತರ ಕೆಲಸಗಾರರನ್ನೆಲ್ಲಾ ಬಾಬಿಲೋನಿಗೆ ಸೆರೆ ಒಯ್ದನು. 10ಆದರೆ ಏನೂ ಇಲ್ಲದ ಬಡಜನರನ್ನು ಜುದೇಯದ ನಾಡಿನಲ್ಲೆ ಬಿಟ್ಟು ಅವರಿಗೆ ಹೊಲತೋಟಗಳನ್ನು ಕೊಟ್ಟನು.

### ಯೆರೆಮೀಯನ ಬಿಡುಗಡೆ

11 ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ಯೆರೆಮೀಯನ ವಿಷಯವಾಗಿ ರಕ್ಷಾದಳದ ನಾಯಕ ನೆಬೂಜರದಾನನಿಗೆ, 12"ಇವನನ್ನು ಕರೆದುಕೊಂಡುಹೋಗಿ ಚೆನ್ನಾಗಿ ನೋಡಿಕೊ. ಯಾವ ಹಾನಿಯನ್ನು ಮಾಡಕೂಡದು. ಬೇಡುವುದನ್ನೆಲ್ಲ ಕೊಡು," ಎಂದು ಆಜ್ಞಾಪಿಸಿದನು. 13ಅಂತೆಯೇ ನೆಬೂಜರದಾನನು

ಹಾಗು ಕಂಚುಕಿಯರ ಮುಖ್ಯಸ್ಥ ನೆಬೂಷಜ್ಬಾನ್, ಜೋಯಿಸರ ಮುಖ್ಯಸ್ಥ ನೇರ್ಗಲ್‍ಸರೆಚರ್ ಮತ್ತು ಬಾಬಿಲೋನಿಯದ ಅರಸನ ಎಲ್ಲ ಪದಾಧಿಕಾರಿಗಳು ಸೇರಿ ಯೆರೆಮೀಯನನ್ನು ಕಾರಾಗೃಹದಿಂದ ಕರೆತರಿಸಿದರು. 14ಅಹೀಕಾಮನ ಮಗನೂ ಶಾಫಾನನ ಮೊಮ್ಮಗನೂ ಆದ ಗೆದಲ್ಯನ ವಶಕ್ಕೆ ಅವನನ್ನು ಒಪ್ಪಿಸಿ ಮನೆಗೆ ಕರೆದುಕೊಂಡು ಹೋಗುವಂತೆ ಹೇಳಿದರು. ಅಂದಿನಿಂದ ಯೆರೆಮೀಯನು ವಾಡಿಕೆಯ ಪ್ರಕಾರ ಜನರ ನಡುವೆ ವಾಸಮಾಡಿದನು.

### ಎಬೆದ್ಮೆಲೆಕನಿಗೆ ಕೊಟ್ಟ ವಾಗ್ದಾನ

15 ಯೆರೆಮೀಯನು ಇನ್ನೂ ಕಾರಾಗೃಹದ ಅಂಗಳದಲ್ಲಿ ಸೆರೆಯಾಗಿದ್ದಾಗ ಸರ್ವೇಶ್ವರನ ಈ ವಾಣಿ ಕೇಳಿಸಿತು: 16ನೀನು ಹೋಗಿ ಸುಡಾನಿನ ಎಬೆದ್ಮೆಲೆಕನಿಗೆ ಹೀಗೆ ತಿಳಿಸು: "ಈ ಇಸ್ರಯೇಲರ ದೇವರೂ ಸೇನಾಧೀಶ್ವರನೂ ಆದ ಸರ್ವೇಶ್ವರ ಹೀಗೆನ್ನುತ್ತಾರೆ – ನಾನು ನುಡಿದ ಮೇಲನ್ನು ಅಲ್ಲ, ಕೇಡನ್ನೇ ಈ ನಗರದ ಮೇಲೆ ಬರಮಾಡುವೆನು. ಅದು ನಿನ್ನ ಕಣ್ಣೆದುರಿಗೇ ಆ ದಿನದಂದು ನಡೆಯುವುದು. 17ಆದರೆ ಆ ದಿನದಲ್ಲಿ ನಿನ್ನನ್ನು ನಾನು ಉದ್ಧರಿಸುವೆನು. ಇದು ಸರ್ವೇಶ್ವರನಾದ ನನ್ನ ನುಡಿ. ನೀನು ಯಾರಿಗಾಗಿ ಭಯಪಡುತ್ತಿಯೋ ಅವರ ಕೈಗೆ ಸಿಕ್ಕುವುದಿಲ್ಲ. 18ನೀನು ನನ್ನಲ್ಲಿ ಭರವಸೆಯಿಟ್ಟ ಕಾರಣ ನಿನ್ನನ್ನು ರಕ್ಷಿಸಿಯೇ ರಕ್ಷಿಸುವೆನು. ನೀನು ಕತ್ತಿಗೆ ತುತ್ತಾಗಲಾರೆ. ಅದರ ಬಾಯಿಂದ ನಿನ್ನ ಪ್ರಾಣವನ್ನು ಉಳಿಸಿಕೊಳ್ಳುವೆ. ಇದು ಸರ್ವೇಶ್ವರನಾದ ನನ್ನ ವಾಣಿ."

### ಗೆದಲ್ಯನ ಸಂಗಡ ಯೆರೆಮೀಯನು

**40** ಸರ್ವೇಶ್ವರನ ವಾಣಿ ಮತ್ತೊಮ್ಮೆ ಯೆರೆಮೀಯನಿಗೆ ಕೇಳಿಸಿತು. ಇಷ್ಟರೊಳಗೆ ರಕ್ಷಾದಳದ ನಾಯಕ ನೆಬೂಜರದಾನನು ಜೆರುಸಲೇಮಿನವರ ಮತ್ತು ಜುದೇಯರ ಗುಂಪನ್ನು ಬಾಬಿಲೋನಿಗೆ ಸೆರೆಯೊಯ್ಯುತ್ತಿದ್ದಾಗ ಅವರಲ್ಲಿ ಯೆರೆಮೀಯನು ಕೂಡ ಸಂಕೋಲೆಗಳಿಂದ ಬಂಧಿತನಾಗಿರುವುದನ್ನು ಕಂಡು ಅವನನ್ನು ರಾಮದ ಬಳಿ ಬಿಡುಗಡೆ ಮಾಡಿದನು. 2ಆಗ ರಕ್ಷಾದಳದ ಆ ನಾಯಕ ಯೆರೆಮೀಯನನ್ನು ಕರೆಯಿಸಿ, "ನಿನ್ನ ದೇವರಾದ ಸರ್ವೇಶ್ವರನು ಈ ನಾಡಿಗೆ ಇಂಥ ಕೇಡು ಬಂದೊದಗಲಿ ಎಂದು ಶಾಪಹಾಕಿದ್ದ. 3ಆ ಶಾಪ ಈಡೇರುವಂತೆ ಮಾಡಿದ್ದಾನೆ. ನೀವು ಆತನ ವಾಣಿಗೆ ಕಿವಿಗೊಡದೆ ಪಾಪಮಾಡಿದ್ದರಿಂದ ಇದು ನಿಮಗೆ ಸಂಭವಿಸಿದೆ. 4ನೋಡು, ನಿನ್ನ ಕೈಗೆ ಹಾಕಿದ್ದ ಬೇಡಿಗಳನ್ನು ಈ ದಿನ ತೆಗೆಸಿದ್ದೇನೆ. ನನ್ನ ಸಂಗಡ ಬಾಬಿಲೋನಿಗೆ ಬರುವುದಕ್ಕೆ ಮನಸಿದ್ದರೆ ಬಾ. ನಾನು ನಿನ್ನನ್ನು ಚೆನ್ನಾಗಿ ನೋಡಿಕೊಳ್ಳುತ್ತೇನೆ. ನನ್ನ ಸಂಗಡ ಬಾಬಿಲೋನಿಗೆ ಬರುವುದಕ್ಕೆ ಮನಸ್ಸಿಲ್ಲದಿದ್ದರೆ ಬರಬೇಕಾಗಿಲ್ಲ. ಇಗೋ ದೇಶವೆಲ್ಲ ನಿನ್ನ ಕಣ್ಣೆದುರಿಗಿದೆ. ನಿನಗೆ ಯಾವ ಕಡೆಗೆ ಹೋಗುವುದು ಸರಿಯೆಂದು, ಒಳ್ಳೆಯದೆಂದು ತೋರುತ್ತದೋ ಆ ಕಡೆಗೆ ಹೋಗು," ಎಂದು ಹೇಳಿದನು.

5 ಯೆರೆಮೀಯನು ಉತ್ತರಕೊಡದೆ ಇರಲು ನೆಬೂಜರದಾನನು ಅವನಿಗೆ, "ಬಾಬಿಲೋನಿಯದ ಅರಸನು, ಅಹೀಕಾಮನ ಮಗನೂ ಶಾಫಾನನ ಮೊಮ್ಮಗನೂ ಆದ ಗೆದಲ್ಯನನ್ನು ಜುದೇಯದ ನಗರಗಳಿಗೆ ರಾಜ್ಯಪಾಲನನ್ನಾಗಿ ನೇಮಿಸಿದ್ದಾನೆ. ಅವನ ಬಳಿಗೆ ಹೋಗು, ಅವನ ಹತ್ತಿರ ಜನರ ನಡುವೆ ವಾಸಮಾಡು, ಇಲ್ಲವೆ ಎಲ್ಲಿಗೆ ಬೇಕಾದರೂ ಹೋಗು," ಎಂದು ಹೇಳಿ ಬುತ್ತಿಯನ್ನೂ ಬಹುಮಾನವನ್ನೂ ಕೊಡಿಸಿ ಅವನನ್ನು ಕಳಿಸಿಬಿಟ್ಟನು. 6ಆಗ ಯೆರೆಮೀಯನು ಅಹೀಕಾಮನ ಮಗ ಗೆದಲ್ಯನು ಇದ್ದ ಮಿಚ್ಪಕ್ಕೆ ಹೋಗಿ ಅವನೊಡನೆ ಹಾಗು ನಾಡಿನ ಉಳಿದ ಜನರ ನಡುವೆ ವಾಸಮಾಡಿದನು.

### ಗೆದಲ್ಯನು ಜುದೇಯದ ರಾಜ್ಯಪಾಲ

(2 ಅರಸು 25.22–24)

7 ಬಾಬಿಲೋನಿಯದ ಅರಸನು ಅಹೀಕಾಮನ ಮಗನಾದ ಗೆದಲ್ಯನನ್ನು ನಾಡಿನ ರಾಜ್ಯಪಾಲನನ್ನಾಗಿ ನೇಮಿಸಿದ್ದಾನೆಂಬ ಸುದ್ದಿ ಹಾಗು ಬಾಬಿಲೋನಿಗೆ ಸೆರೆಹೋಗದೆ ನಾಡಿಗರಲ್ಲಿ ಬಡವರಾದ ಗಂಡಸರನ್ನೂ

ಹೆಂಗಸರನ್ನೂ ಮಕ್ಕಳನ್ನೂ ಅವನ ಅಧಿಕಾರಕ್ಕೆ ಒಪ್ಪಿಸಿದ್ದಾನೆಂಬ ಸುದ್ದಿ ಹರಡಿತು. ಕಾಡುಮೇಡುಗಳಲ್ಲಿದ್ದ ಎಲ್ಲ ಯೆಹೂದ್ಯ ಸೈನಿಕರೂ ಸೇನಾಪತಿಗಳೂ ಇದನ್ನು ಕೇಳಿ ಮಿಚ್ಪದಲ್ಲಿ ವಾಸವಾಗಿದ್ದ ಗೆದಲ್ಯನ ಬಳಿಗೆ ಹೋದರು.
8ಹೀಗೆ ನೆತನ್ಯನ ಮಗನಾದ ಇಷ್ಮಾಯೇಲ, ಕಾರೇಹನ ಮಕ್ಕಳಾದ ಯೋಹಾನಾನ ಯೋನಾಥಾನ, ತನ್ಹುಮೆತನ ಮಗನಾದ ಸೆರಾಯ, ಮಾಕಾ ಊರಿನವನ ಮಗನಾದ ಯೆಜನ್ಯ, ನೆಟೋಫದವನಾದ ಏಫಯನ ಮಕ್ಕಳು ಗೆದಲ್ಯನ ಬಳಿಗೆ ಹೋದರು.
9ಇವರಿಗೂ ಇವರ ಜನರಿಗೂ ಆಹೀಕಾಮನ ಮಗನೂ ಶಾಫಾನನ ಮೊಮ್ಮಗನೂ ಆದ ಗೆದಲ್ಯನು, "ಬಾಬಿಲೋನಿಯರಿಗೆ ಅಧೀನರಾಗಿರಲು ಹೆದರಬೇಡಿ, ಬಾಬಿಲೋನಿನ ಅರಸನಿಗೆ ಅಧೀನರಾಗಿ ಅಲ್ಲಿಯೇ ವಾಸಮಾಡಿ. ಆಗ ನಿಮಗೆ ಒಳ್ಳೆಯದಾಗುವುದು.
10ನಾನಂತು ಮಿಚ್ಪದಲ್ಲಿ ವಾಸವಾಗಿರುವೆನು. ನಮ್ಮ ಬಳಿಗೆ ಬರುವ ಬಾಬಿಲೋನಿಯರ ಮುಂದೆ ನಿಮ್ಮ ಪ್ರತಿನಿಧಿಯಾಗಿರುವೆನು. ನೀವು ಹೋಗಿ ದ್ರಾಕ್ಷಾರಸ, ಹಣ್ಣು, ಎಣ್ಣೆ ಮುಂತಾದವುಗಳನ್ನು ಸಂಗ್ರಹಿಸಿ ನಿಮ್ಮ ಉಗ್ರಾಣಗಳಲ್ಲಿ ತುಂಬಿಸಿಡಿ. ನೀವು ಹಿಡಿದಿರುವ ಪಟ್ಟಣಗಳಲ್ಲೆ ವಾಸವಾಗಿರಿ," ಎಂದು ಶಪಥಮಾಡಿ ಹೇಳಿದನು.
11ಇದಲ್ಲದೆ, ಅಮ್ಮೋನ್, ಮೋವಾಬ್, ಎದೋಮ್ ಮೊದಲಾದ ನಾಡುಗಳಲ್ಲಿ ಚದರಿಹೋಗಿದ್ದ ಯೆಹೂದ್ಯರೆಲ್ಲರು, ಬಾಬಿಲೋನಿನ ಅರಸನು ಯೆಹೂದ್ಯರಲ್ಲಿ ಕೆಲವರನ್ನು ಉಳಿಸಿ, ಅವರಿಗೆ ಅಹೀಕಾಮನ ಮಗನೂ ಶಾಫಾನನ ಮೊಮ್ಮಗನೂ ಆದ ಗೆದಲ್ಯನನ್ನು ರಾಜ್ಯಪಾಲನನ್ನಾಗಿ ನೇಮಿಸಿದ್ದಾನೆಂಬ ಸುದ್ದಿಯನ್ನು ಕೇಳಿದರು.
12ತಾವು ಹೊರದೂಡಲ್ಪಟ್ಟು ವಾಸಮಾಡುತ್ತಿದ್ದ ಎಲ್ಲಾ ಊರುಗಳಿಂದ ಜುದೇಯಕ್ಕೆ ಹಿಂದಿರುಗಿದರು. ಮಿಚ್ಪದಲ್ಲಿ ವಾಸವಾಗಿದ್ದ ಗೆದಲ್ಯನ ಬಳಿಗೆ ಬಂದು ಸೇರಿಕೊಂಡರು. ದ್ರಾಕ್ಷಾರಸವನ್ನೂ ಹಣ್ಣುಹಂಪಲುಗಳನ್ನೂ ಹೇರಳವಾಗಿ ಕೂಡಿಸಿಕೊಂಡರು.

## ಗೆದಲ್ಯನ ಕೊಲೆ

(2 ಅರಸು 25.25–26)

13 ತರುವಾಯ ಕಾರೇಹನ ಮಗ ಯೋಹಾನಾನನು ಹಾಗು ಕಾಡುಮೇಡುಗಳಲ್ಲಿ ವಾಸ ಮಾಡುತ್ತಿದ್ದ ಎಲ್ಲ ಸೇನಾಪತಿಗಳು ಮಿಚ್ಪದಲ್ಲಿದ್ದ ಗೆದಲ್ಯನ ಬಳಿಗೆ ಹೋದರು.
14"ಅಮ್ಮೋನ್ಯರ ಅರಸ ಬಾಲೀಸನು ನಿಮ್ಮನ್ನು ಕೊಲ್ಲುವುದಕ್ಕಾಗಿ ನೆತನ್ಯನ ಮಗ ಇಷ್ಮಾಯೇಲನನ್ನು ಕಳಿಸಿದ್ದಾನೆ ಎಂಬುದು ನಿಮಗೆ ಗೊತ್ತಿದೆಯೇ?" ಎಂದು ಕೇಳಿದರು. ಆದರೆ ಆಹೀಕಾಮನ ಮಗ ಗೆದಲ್ಯನು ಅವರನ್ನು ನಂಬಲಿಲ್ಲ.
15ಆಗ ಕಾರೇಹನ ಮಗ ಯೋಹಾನಾನನು ಮಿಚ್ಪದಲ್ಲಿದ್ದ ಗೆದಲ್ಯನಿಗೆ, "ನಾನು ಹೋಗಿ ನೆತನ್ಯನ ಮಗ ಇಷ್ಮಾಯೇಲನನ್ನು ಕೊಲ್ಲಲು ಅಪ್ಪಣೆಯಾಗಬೇಕು. ಇದು ನಿಮ್ಮ ಅಪ್ಪಣೆಯೆಂದು ಯಾರಿಗೂ ತಿಳಿದುಬರುವುದಿಲ್ಲ. ಅವನು ನಿಮ್ಮನ್ನು ಕೊಂದರೆ ನಿಮ್ಮ ಆಶ್ರಯದ ಯೆಹೂದ್ಯರೆಲ್ಲರು ದಿಕ್ಕಾಪಾಲಾಗಿ ಜುದೇಯದ ಶೇಷವೂ ನಿಶ್ಶೇಷವಾಗುವುದು. ಹೀಗೆ ಆಗುವುದು ಸರಿಯೇ?" ಎಂದು ಗುಟ್ಟಾಗಿ ವಿನಂತಿಸಿದನು.
16ಅದಕ್ಕೆ ಆಹೀಕಾಮನ ಮಗ ಗೆದಲ್ಯನು, "ನೀನು ಹಾಗೆ ಮಾಡಲೆಕೂಡದು. ನೀನು ಇಷ್ಮಾಯೇಲನ ವಿಷಯವಾಗಿ ಹೇಳಿದ್ದು ಸುಳ್ಳು," ಎಂದು ಉತ್ತರಿಸಿದನು.

**41** ಏಳನೆಯ ತಿಂಗಳಿನಲ್ಲಿ ಇಷ್ಮಯೇಲನು ಹತ್ತು ಮಂದಿಯೊಂದಿಗೆ ಅಹೀಕಾಮನ ಮಗ ಗೆದಲ್ಯನು ವಾಸವಾಗಿದ್ದ ಮಿಚ್ಪಕ್ಕೆ ಬಂದನು. ಈತನು ರಾಜವಂಶದವನು, ಎಲೀಷಾಮನ ಮೊಮ್ಮಗನು, ನೆತನ್ಯನ ಮಗನು ಹಾಗು ಅರಸನ ಪದಾಧಿಕಾರಿಗಳಲ್ಲಿ ಒಬ್ಬನು. ಅಲ್ಲಿ ಗೆದಲ್ಯನೊಂದಿಗೆ ಅವರೆಲ್ಲರು ಊಟ ಮಾಡುತ್ತಿದ್ದಾಗ,
2ನೆತನ್ಯನ ಮಗ ಇಷ್ಮಾಯೇಲನು ಮತ್ತು ಅವನೊಂದಿಗಿದ್ದ ಹತ್ತು ಜನರು ಎದ್ದು ಆಹೀಕಾಮನ ಮಗ, ಶಾಫಾನನ ಮೊಮ್ಮಗ, ಹಾಗು ಬಾಬಿಲೋನಿಯದ ಅರಸನಿಂದ ನಾಡಿನ ರಾಜ್ಯಪಾಲನಾಗಿ ನೇಮಕಗೊಂಡಿದ್ದ ಆ ಗೆದಲ್ಯನನ್ನು ಕತ್ತಿಯಿಂದ ಹೊಡೆದು ಕೊಂದರು.
3ಇದಲ್ಲದೆ, ಆ ಇಷ್ಮಾಯೇಲನು ಗೆದಲ್ಯನ ಸಂಗಡ ಮಿಚ್ಪದಲ್ಲಿದ್ದ ಯೆಹೂದ್ಯರೆಲ್ಲರನ್ನು ಹಾಗು ಅಲ್ಲಿ ಸಿಕ್ಕಿದ ಬಾಬಿಲೋನಿಯದ ಸೈನಿಕರನ್ನು ಹತಿಸಿದನು.

4 ಗೆದಲ್ಯನನ್ನು ಕೊಂದು ಎರಡು ದಿನಗಳಾಗಿದ್ದರೂ ಆ ಸಂಗತಿ ಇನ್ನು ಯಾರಿಗೂ ತಿಳಿದಿರಲಿಲ್ಲ.
5ಇಂತಿರಲು ಗಡ್ಡ ಬೋಳಿಸಿ, ಬಟ್ಟೆ ಹರಿದು, ಗಾಯಮಾಡಿಕೊಂಡಿದ್ದ ಎಂಬತ್ತು ಜನರು ಶೆಕೆಮ್, ಶಿಲೋ, ಸಮಾರಿಯ ಎಂಬ ಊರುಗಳಿಂದ ಬಂದು, ಕೈಯಲ್ಲಿ ಧೂಪನೈವೇದ್ಯ ದ್ರವ್ಯಗಳನ್ನು ತೆಗೆದುಕೊಂಡು ಸರ್ವೇಶ್ವರನ ಆಲಯಕ್ಕೆ ಹೋಗುತ್ತಿದ್ದರು.
6ಆಗ ನೆತನ್ಯನ ಮಗ ಇಷ್ಮಾಯೇಲನು ಮಿಚ್ಪದಿಂದ ಅವರ ಕಡೆಗೆ ಹೊರಟು ದಾರಿಯುದ್ದಕ್ಕೂ ಅಳುತ್ತಾ ನಡೆದುಬಂದನು. ಅವರನ್ನು ಎದುರುಗೊಂಡು, ‘ಆಹೀಕಾಮನ ಮಗ ಗೆದಲ್ಯನ ಬಳಿಗೆ ಬನ್ನಿ’ ಎಂದು ಹೇಳಿದನು.
7ಅವರು ಊರೊಳಕ್ಕೆ ಬಂದಮೇಲೆ ನೆತನ್ಯನ ಮಗ ಇಷ್ಮಾಯೇಲನೂ ಅವನ ಸಂಗಡಿಗರೂ ಅವರನ್ನು ಕೊಂದು ಬಾವಿಯಲ್ಲಿ ಹಾಕಿದರು.

**ಇಷ್ಮಾಯೇಲನ ಪಲಾಯನ**

8 ಆದರೆ ಆ ಎಂಬತ್ತು ಮಂದಿಯಲ್ಲಿ ಹತ್ತು ಜನರು ಇಷ್ಮಾಯೇಲನಿಗೆ, “ನಮ್ಮನ್ನು ಕೊಲ್ಲಬೇಡಿ; ಗೋದಿ, ಜವೆಗೋದಿ, ಎಣ್ಣೆ, ಜೇನುತುಪ್ಪ ಇವುಗಳನ್ನು ಕಾಡಿನಲ್ಲಿ ರಾಶಿಯಾಗಿ ಬಚ್ಚಿಟ್ಟಿದ್ದೇವೆ,” ಎಂದು ಬಿನ್ನವಿಸಿದರು. ಈ ಕಾರಣ ಅವರನ್ನು ಅವರ ಜೊತೆಯವರಂತೆ ಕೊಲ್ಲದೆ ಬಿಟ್ಟನು.
9“ಇಷ್ಮಾಯೇಲನು ತಾನು ಕೊಂದವರ ಶವಗಳನ್ನು ಗೆದಲ್ಯನ ಶವದ ಮೇಲೆ ಹಾಕಿಸಿದನು. ಹೀಗೆ ಹಾಕಿಸಿದ ಆ ಬಾವಿಯು ಇಸ್ರಯೇಲಿನ ಅರಸನಾದ ಬಾಷನ ಭಯದಿಂದ ಅರಸನಾದ ಆಸನು ತೋಡಿಸಿದ್ದ ಬಾವಿಯೇ ಆಗಿತ್ತು. ಆ ಬಾವಿಯನ್ನು ನೆತನ್ಯನ ಮಗ ಇಷ್ಮಾಯೇಲನು ಹತರಾದವರ ಶವಗಳಿಂದ ತುಂಬಿಸಿ ಬಿಟ್ಟನು.
10ಬಳಿಕ ನೆತನ್ಯನ ಮಗ ಇಷ್ಮಾಯೇಲನು ರಾಜಕುವರಿಯರನ್ನು ಮತ್ತು ರಕ್ಷಾದಳದ ನಾಯಕನಾದ ನೆಬೂಜರದಾನನನ್ನು ಆಹೀಕಾಮನ ಮಗ ಗೆದಲ್ಯನಿಗೆ ಒಪ್ಪಿಸಿದ್ದ ಮಿಚ್ಪದ ಜನ ಶೇಷವನ್ನು, ಹೀಗೆ ಮಿಚ್ಪದಲ್ಲಿ ಅಳಿದುಳಿದಿದ್ದ ಎಲ್ಲರನ್ನು ಸೆರೆಹಿಡಿದು ಅಮ್ಮೋನ್ಯರ ನಾಡಿಗೆ ಹೊರಟನು.

11 ಕಾರೇಹನ ಮಗ ಯೋಹಾನಾನನು ಹಾಗು, ಅವನೊಂದಿಗಿದ್ದ ಎಲ್ಲ ಸೇನಾಪತಿಗಳು ನೆತನ್ಯನ ಮಗ ಇಷ್ಮಾಯೇಲನು ಮಾಡಿದ ಎಲ್ಲ ಕೆಡುಕನ್ನು ಕೇಳಿದರು.
12ತಮ್ಮ ಸೈನಿಕರನ್ನೆಲ್ಲ ಕರೆದುಕೊಂಡು ನೆತನ್ಯನ ಮಗನಾದ ಇಷ್ಮಾಯೇಲನ ಮೇಲೆ ಯುದ್ಧಕ್ಕೆ ಹೊರಟು ಗಿಬ್ಯೋನಿನ ದೊಡ್ಡ ಕೆರೆಯ ಹತ್ತಿರ ಅವನನ್ನು ಹಿಡಿದರು.
13ಆಗ ಇಷ್ಮಾಯೇಲನ ಸಂಗಡವಿದ್ದ ಸೆರೆಯಾಳುಗಳೆಲ್ಲರು ಕಾರೇಹನ ಮಗ ಯೋಹಾನಾನನನ್ನು ಅವನೊಂದಿಗಿದ್ದ ಎಲ್ಲ ಸೇನಾಪತಿಗಳನ್ನೂ ನೋಡಿ ಸಂತೋಷಪಟ್ಟರು.
14ಇಷ್ಮಾಯೇಲನು ಮಿಚ್ಪದಿಂದ ಸೆರೆಯಾಗಿ ಒಯ್ದಿದ್ದ ಜನರೆಲ್ಲರು ಹಿಂದಿರುಗಿ ಹೋಗಿ ಕಾರೇಹನ ಮಗ ಯೋಹಾನಾನನನ್ನು ಸೇರಿಕೊಂಡರು.
15ನೆತನ್ಯನ ಮಗ ಇಷ್ಮಾಯೇಲನಾದರೋ ಎಂಟು ಮಂದಿಯ ಸಂಗಡ ಯೋಹಾನನನಿಂದ ತಪ್ಪಿಸಿಕೊಂಡು ಅಮ್ಮೋನ್ಯರನ್ನು ಮರೆಹೊಕ್ಕನು.

16 ಆಗ ಕಾರೇಹನ ಮಗ ಯೋಹಾನಾನನು ಮತ್ತು ಅವನೊಂದಿಗಿದ್ದ ಸೇನಾಪತಿಗಳೆಲ್ಲರು ತಾವು ನೆತನ್ಯನ ಮಗ ಇಷ್ಮಾಯೇಲನ ಕೈಯಿಂದ ತಪ್ಪಿಸಿ ಗಿಬ್ಯೋನಿನಿಂದ ತಂದಿದ್ದ ಜನರನ್ನು ಅಂದರೆ ಯೋಧರು, ಮಹಿಳೆಯರು, ಮಕ್ಕಳು, ಕಂಚುಕಿಗಳು, ಹೀಗೆ ಇಷ್ಮಾಯೇಲನು ಆಹೀಕಾಮನ ಮಗ ಗೆದಲ್ಯನನ್ನು ಕೊಂದ ಬಳಿಕ ಜನರನ್ನೆಲ್ಲರನ್ನು ಕರೆದುಕೊಂಡು ಹೊರಟರು. ವಲಸೆಹೋಗಬೇಕೆಂದು ಬೆತ್ಲೆಹೇಮಿನ ಸಮೀಪದಲ್ಲಿರುವ ಗೇರುಥ್ ಕಿಮ್ಹಾಮಿನಲ್ಲಿ ಇಳಿದುಕೊಂಡರು.
18ಬಾಬಿಲೋನಿಯದ ಅರಸನಿಂದ ನಾಡಿನ ರಾಜ್ಯಪಾಲನಾಗಿ ನೇಮಕಗೊಂಡಿದ್ದ ಆಹೀಕಾಮನ ಮಗ ಗೆದಲ್ಯನನ್ನು ನೆತನ್ಯನ ಮಗ ಇಷ್ಮಾಯೇಲನು ಕೊಂದುಹಾಕಿದ್ದರಿಂದ ಬಾಬಿಲೋನಿಯರಿಗೆ ಆ ಜನರು ಅಂಜಿದ್ದರು.

**ಈಜಿಪ್ಟಿಗೆ ಪಲಾಯನ**

**42** ಇದಾದ ಬಳಿಕ ಎಲ್ಲ ಸೇನಾಪತಿಗಳು, ಕಾರೇಹನ ಮಗ ಯೋಹಾನಾನನು, ರೋಷಾಯನ ಮಗ ಯೆಜನ್ಯನು, ಹಾಗು ಚಿಕ್ಕವರು ಮೊದಲ್ಗೊಂಡು ದೊಡ್ಡವರ ತನಕ ಎಲ್ಲ ಜನರು ಪ್ರವಾದಿ ಯೆರೆಮೀಯನ ಬಳಿಗೆ ಬಂದರು.
2“ದಯಮಾಡಿ ನಮ್ಮ ಬಿನ್ನಹವನ್ನು ಆಲಿಸಬೇಕು.
3ನಿಮ್ಮ ದೇವರಾದ ಸರ್ವೇಶ್ವರ ಸ್ವಾಮಿ ನಾವು ನಡೆಯಬೇಕಾದ ಮಾರ್ಗವನ್ನೂ ಕೈಗೊಳ್ಳಬೇಕಾದ ಕಾರ್ಯವನ್ನೂ ತೋರಿಸುವಂತೆ ನಮಗಾಗಿ

ಪ್ರಾರ್ಥಿಸಬೇಕು. ಅಳಿದುಳಿದಿರುವ ಈ ಎಲ್ಲ ಜನರಿಗಾಗಿ ನಿಮ್ಮ ದೇವರಾದ ಸರ್ವೇಶ್ವರನನ್ನು ನೀವು ಪ್ರಾರ್ಥಿಸಬೇಕು. ನಿಮ್ಮ ಕಣ್ಣಿಗೆ ಕಾಣುವಂತೆ ಹೇರಳವಾದ ಜನರಲ್ಲಿ ನಾವು ಕೆಲವರು ಮಾತ್ರ ಉಳಿದಿದ್ದೇವೆ," ಎಂದು ವಿಜ್ಞಾಪಿಸಿದರು.

4 ಇದನ್ನು ಕೇಳಿ ಪ್ರವಾದಿ ಯೆರೆಮೀಯನು ಅವರಿಗೆ, "ನಿಮ್ಮ ಬಿನ್ನಹವನ್ನು ಕೇಳಿದ್ದೇನೆ. ಇಗೋ, ನಿಮ್ಮ ಕೋರಿಕೆಯ ಪ್ರಕಾರ ನಿಮ್ಮ ದೇವರಾದ ಸರ್ವೇಶ್ವರನನ್ನು ಪ್ರಾರ್ಥಿಸುವೆನು. ಸರ್ವೇಶ್ವರ ಯಾವ ಉತ್ತರವನ್ನು ದಯಪಾಲಿಸುವರೋ ಅದರಲ್ಲಿ ಒಂದನ್ನೂ ಮುಚ್ಚು ಮರೆಮಾಡದೆ ನಿಮಗೆ ತಿಳಿಸುವೆನು," ಎಂದು ಹೇಳಿದನು.

5 ಅದಕ್ಕೆ ಅವರು ಯೆರೆಮೀಯನಿಗೆ, "ನಿಮ್ಮ ದೇವರಾದ ಸರ್ವೇಶ್ವರ ನಿಮ್ಮ ಮೂಲಕ ನಮಗೆ ಕಳಿಸುವ ಮಾತಿನಂತೆ ನಾವು ನಡೆಯದಿದ್ದರೆ, ಆ ಸರ್ವೇಶ್ವರನೇ ಸ್ಥಿರವಾದ ಸತ್ಯಸಾಕ್ಷಿಯಾಗಿ ನಿಂತು, ನಮ್ಮನ್ನು ಖಂಡಿಸಲಿ. 6ನಮ್ಮ ದೇವರಾದ ಸರ್ವೇಶ್ವರನ ಮಾತು ಹಿತವಾಗಿರಲಿ, ಅಹಿತವಾಗಿರಲಿ ಅದನ್ನು ಕೈಗೊಳ್ಳುತ್ತೇವೆ. ಅವರ ಸನ್ನಿಧಿಯಲ್ಲಿ ವಿಚಾರಿಸುವುದಕ್ಕೆ ನಿಮ್ಮನ್ನು ನಾವು ಕಳುಹಿಸಿದ್ದೇವೆ. ನಮ್ಮ ದೇವರಾದ ಸರ್ವೇಶ್ವರನ ಮಾತನ್ನು ಕೇಳಿದರೆ ನಮಗೇ ಶುಭವಾಗುವುದು," ಎಂದು ಹೇಳಿದರು.

### ಯೆರೆಮೀಯನ ಪ್ರಾರ್ಥನೆಗೆ ಸರ್ವೇಶ್ವರ ಕೊಟ್ಟ ಉತ್ತರ

7 ಹತ್ತು ದಿನಗಳಾದ ಮೇಲೆ ಸರ್ವೇಶ್ವರನ ವಾಣಿ ಯೆರೆಮೀಯನಿಗೆ ಕೇಳಿಬಂದಿತು. 8ಆಗ ಆತ ಕಾರೇಹನ ಮಗನಾದ ಯೋಹಾನನನ್ನು, ಅವನೊಂದಿಗಿದ್ದ ಸೇನಾಪತಿಗಳೆಲ್ಲರನ್ನು ಹಾಗು ಚಿಕ್ಕವರು ಮೊದಲ್ಗೊಂಡು ದೊಡ್ಡವರ ತನಕ ಎಲ್ಲ ಜನರನ್ನು ಕರೆದನು. 9"ನಿಮ್ಮ ವಿಜ್ಞಾಪನೆಯನ್ನು ಸರ್ವೇಶ್ವರನಿಗೆ ಅರಿಕೆ ಮಾಡುವುದಕ್ಕಾಗಿ ನನ್ನನ್ನು ನೀವು ಕಳುಹಿಸಿದ್ದಿರಲ್ಲವೆ? ಅದಕ್ಕೆ ಇಸ್ರಯೇಲಿನ ದೇವರಾದ ಸರ್ವೇಶ್ವರ ಹೀಗೆನ್ನುತ್ತಾರೆ: 10'ನೀವು ಈ ನಾಡಿನಲ್ಲಿ ನೆಲೆಗೊಂಡಿದ್ದರೆ ನಾನು ನಿಮ್ಮನ್ನು ಕಟ್ಟುವೆನು, ಕೆಡುವುದಿಲ್ಲ, ನೆಡುವೆನು, ಕೀಳುವುದಿಲ್ಲ, ನಾನು ನಿಮಗೆ ಮಾಡಿದ ಕೇಡಿಗಾಗಿ ವಿಷಾದಿಸುತ್ತೇನೆ. 11ಬಾಬಿಲೋನಿಯದ ಅರಸನಿಗೆ ಹೆದರಬೇಡಿ, ಬೆದರಬೇಡಿ. ನಿಮ್ಮನ್ನು ಅವನ ಕೈಯಿಂದ ತಪ್ಪಿಸಿ ರಕ್ಷಿಸಲಿಕ್ಕೆ ನಾನೇ ನಿಮ್ಮೊಂದಿಗೆ ಇರುವೆನು. ಇದು ಸರ್ವೇಶ್ವರನಾದ ನನ್ನ ನುಡಿ. 12ನಾನು ನಿಮಗೆ ಕರುಣೆತೋರಿಸುವೆನು. ಅವನು ನಿಮ್ಮ ಮೇಲೆ ಮನಮರುಗಿ ಸ್ವಂತ ನಾಡಿಗೆ ಹೋಗಲು ಬಿಡುವಂತೆ ಮಾಡುವೆನು.

13 "ಆದರೆ ನೀವು ನಿಮ್ಮ ದೇವರಾದ ಸರ್ವೇಶ್ವರನ ನುಡಿಗೆ ಕಿವಿಗೊಡದೆ 'ನಾವು ಈ ನಾಡಿನಲ್ಲಿ ನೆಲೆಸುವುದೇ ಇಲ್ಲ, ಇದು ನಮಗೆ ಬೇಡವೇಬೇಡ. 14ನಾವು ಈಜಿಪ್ಟಿನಲ್ಲೇ ವಾಸ ಮಾಡುತ್ತೇವೆ. ಅದು ಯುದ್ಧ ಕಾಣದ, ರಣಕಹಳೆ ಕೇಳದ, ಕೂಳಿನ ಕೊರತೆಯಿಲ್ಲದ ದೇಶ,' ಎಂದುಕೊಳ್ಳಬೇಡಿ. 15ಯೆಹೂದ್ಯರಲ್ಲಿ ಅಳಿದು ಉಳಿದವರೇ, ಸರ್ವೇಶ್ವರನ ವಾಕ್ಯವನ್ನು ಈಗ ಕೇಳಿ: ಇಸ್ರಯೇಲಿನ ದೇವರೂ ಸರ್ವಶಕ್ತರೂ ಆದ ಸರ್ವೇಶ್ವರ ಹೇಳುವುದು ಇದು – 'ನೀವು ಈಜಿಪ್ಟಿಗೆ ಹೋಗಬೇಕೆಂದು ಹಟಹಿಡಿದು ಅಲ್ಲಿಗೆ ಸೇರಿ ವಾಸಮಾಡುವುದಾದರೆ, 16ನೀವು ಹೆದರುತ್ತಿರುವ ಖಡ್ಗ, ಈಜಿಪ್ಟಿನಲ್ಲೂ ನಿಮ್ಮನ್ನು ಹಿಂದಟ್ಟಿ ಬಂದು ಹಿಡಿಯುವುದು. ನೀವು ಅಂಜುತ್ತಿರುವ ಕ್ಷಾಮ ಅಲ್ಲಿಯೂ ನಿಮ್ಮ ಬೆನ್ನು ಹತ್ತುವುದು. ನೀವು ಅಲ್ಲೇ ಸಾಯುವಿರಿ. 17ಈಜಿಪ್ಟಿಗೆ ಹೋಗಿ ಅಲ್ಲೆ ವಾಸಿಸಲು ಹಟಹಿಡಿಯುವ ಎಲ್ಲ ಜನರಿಗೂ ಇದೇ ಗತಿಯಾಗುವುದು. ಖಡ್ಗ–ಕ್ಷಾಮ–ವ್ಯಾಧಿಯಿಂದ ಅವರು ಸಾಯುವರು. ನಾನು ಬರಮಾಡುವ ವಿಪತ್ತಿನಿಂದ ಅವರಾರೂ ತಪ್ಪಿಸಿಕೊಳ್ಳರು, ಯಾರೂ ಉಳಿಯರು'."

18 "ಇಸ್ರಯೇಲಿನ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಇಂತೆನ್ನುತ್ತಾರೆ: 'ನನ್ನ ರೌದ್ರ ಕೋಪಾಗ್ನಿಯು ಜೆರುಸಲೇಮಿನ ಮೇಲೆ ಹೇಗೆ ಸುರಿಯಿತೋ ಹಾಗೆಯೆ ನೀವು ಈಜಿಪ್ಟಿನಲ್ಲಿ ಕಾಲಿಟ್ಟ ಕೂಡಲೆ ನನ್ನ ಕೋಪಾಗ್ನಿ ನಿಮ್ಮ ಮೇಲೆಯೂ ಸುರಿಯುವುದು. ನೀವು ಅಪವಾದ, ಅಪಹಾಸ್ಯಕ್ಕೂ, ಶಾಪ, ನಿಂದೆ, ದೂಷಣೆಗಳಿಗೂ ಗುರಿಯಾಗುವಿರಿ. ಈ ನಾಡನ್ನು ನೀವು ಮತ್ತೆ ನೋಡಲಾರಿರಿ.'

19 "ಯೆಹೂದ್ಯರಲ್ಲಿ ಅಳಿದುಳಿದವರೇ, ಸರ್ವೇಶ್ವರ ನಿಮಗೆ 'ಈಜಿಪ್ಟಿಗೆ ಹೋಗಬೇಡಿ' ಎಂದು ಆಜ್ಞೆ ಮಾಡಿದ್ದಾರೆ. ನಾನು ಆ ಮಾತನ್ನು ಇಂದೇ ನಿಮಗೆ ಪ್ರಕಟಿಸಿದ್ದೇನೆ. ಇದು ನಿಮಗೆ ಚೆನ್ನಾಗಿ ತಿಳಿದಿರಲಿ. 20ನಿಮ್ಮನ್ನು ನೀವೇ ಮೋಸ ಮಾಡಿಕೊಳ್ಳುತ್ತಿದ್ದೀರಿ. ನೀವೇ ನನ್ನ ಬಳಿಗೆ ಬಂದು 'ನಮ್ಮ ದೇವರಾದ

ಸರ್ವೇಶ್ವರನನ್ನು ನಮಗಾಗಿ ಪ್ರಾರ್ಥಿಸು. ನಮ್ಮ ದೇವರಾದ ಸರ್ವೇಶ್ವರ ಯಾವ ಅಪ್ಪಣೆ ಕೊಡುತ್ತಾರೋ ಅದನ್ನು ನಮಗೆ ತಿಳಿಸು. ಅದರಂತೆ ನಾವು ನಡೆಯುತ್ತೇವೆ,' ಎಂಬುದಾಗಿ ನಿಮ್ಮ ದೇವರಾದ ಸರ್ವೇಶ್ವರನ ಸನ್ನಿಧಿಯಲ್ಲಿ ವಿಚಾರಿಸುವುದಕ್ಕೆ ನನ್ನನ್ನು ನೀವೇ ಕಳುಹಿಸಿದಿರಿ.
21ನಾನು ಸರ್ವೇಶ್ವರನ ಅಪ್ಪಣೆಯನ್ನು ಈ ದಿನ ನಿಮಗೆ ತಿಳಿಸಿದ್ದೇನೆ. ಆದರೆ ನೀವು ನಿಮ್ಮ ದೇವರಾದ ಸರ್ವೇಶ್ವರ ನನ್ನ ಮುಖಾಂತರ ನಿಮಗೆ ಹೇಳಿ ಕಳುಹಿಸಿದ ಯಾವ ಮಾತನ್ನು ಕೇಳುತ್ತಿಲ್ಲ.
22ನೀವು ಯಾವ ನಾಡಿನಲ್ಲಿ ವಾಸಮಾಡಲು ಬಯಸಿ ಹೋಗುತ್ತಿರೋ ಆ ನಾಡಿನಲ್ಲಿ ಖಡ್ಗ–ಕ್ಷಾಮ–ವ್ಯಾಧಿಗಳಿಂದ ಸಾಯುವಿರಿ. ಇದು ನಿಶ್ಚಯ ಎಂದು ತಿಳಿಯಿರಿ," ಎಂದನು.

### ಈಜಿಪ್ಟಿಗೆ ಪಲಾಯನ

**43** ಯೆರೆಮೀಯನು ಜನರೆಲ್ಲರನ್ನು ಸಂಬೋಧಿಸಿ ದೇವರಾದ ಸರ್ವೇಶ್ವರ ತನ್ನ ಮುಖಾಂತರ ಅವರಿಗೆ ಹೇಳಿಕಳುಹಿಸಿದ ಮಾತುಗಳನ್ನೆಲ್ಲ ತಿಳಿಸಿದನು.
2ಅದಾದ ಮೇಲೆ ಹೋಷಾಯನ ಮಗ ಅಜರ್ಯನು, ಕಾರೇಹನ ಮಗ ಯೊಹಾನಾನನು, ಹಾಗು ಅಹಂಕಾರಿಗಳಾದ ಜನರೆಲ್ಲರು ಅವನಿಗೆ, "ನಿನ್ನ ಮಾತು ಸುಳ್ಳು, ಈಜಿಪ್ಟಿಗೆ ಹೋಗಿ ವಾಸಮಾಡಬಾರದು ಎಂದು ತಿಳಿಸುವಂತೆ ನಮ್ಮ ದೇವರಾದ ಸರ್ವೇಶ್ವರ ನಿನ್ನನ್ನು ಕಳಿಸಲಿಲ್ಲ.
3ಬದಲಿಗೆ ಬಾಬಿಲೋನಿಯರು ನಮ್ಮನ್ನು ಕೊಲ್ಲಲಿ ಅಥವಾ ಸೆರೆಗೊಯ್ಯಲಿ ಎಂದು ನಮ್ಮನ್ನು ಅವರ ಕೈಗೆ ಸಿಕ್ಕಿಸುವುದಕ್ಕಾಗಿ ನೇರೀಯನ ಮಗ ಬಾರೂಕನೇ ನಿನ್ನನ್ನು ನಮ್ಮ ಮೇಲೆ ದೊಬ್ಬಿದ್ದಾನೆ," ಎಂದರು.
4ಹೀಗೆ ಜುದೇಯ ನಾಡಿನಲ್ಲೇ ವಾಸಮಾಡಿರೆಂಬ ಸರ್ವೇಶ್ವರನ ಮಾತನ್ನು ಕಾರೇಹನ ಮಗ ಯೋಹಾನಾನನು, ಸಮಸ್ತ ಸೇನಾಪತಿಗಳು, ಹಾಗು ಸಕಲ ಜನರು ಕೇಳದೆಹೋದರು.
5ಆಗ ರಕ್ಷಾದಳದ ನಾಯಕನಾದ ನೆಬೂಜರದಾನನನ್ನು, ಆಹೀಕಾಮನ ಮಗ ಹಾಗು ಶಾಫಾನನ ಮೊಮ್ಮಗ ಆದ ಗೆದಲ್ಯನ ವಶಕ್ಕೆ ಒಪ್ಪಿಸಿದ್ದ ಜನರನ್ನು, ಅನ್ಯ ದೇಶಗಳಿಗೆ ಅಟ್ಟಲ್ಪಟ್ಟು ಜುದೇಯದಲ್ಲಿ ವಾಸಿಸುವುದಕ್ಕೆ ಹಿಂದಿರುಗಿ ಬಂದಿದ್ದ ಅಳಿದುಳಿದ ಯೆಹೂದ ಜನರನ್ನು, ಪ್ರವಾದಿ ಯೆರೆಮೀಯನನ್ನು,
6ನೇರೀಯನ ಮಗ ಬಾರೂಕನನ್ನು, ರಾಜಕುವರಿಯರನ್ನು, ಅಂತು ಗಂಡಸರು, ಹೆಂಗಸರು, ಮಕ್ಕಳು,
7ಇವರೆಲ್ಲರನ್ನು ಕಾರೇಹನ ಮಗ ಯೋಹಾನಾನನೂ ಸಕಲ ಸೇನಾಪತಿಗಳೂ ಕರೆದುಕೊಂಡು ಈಜಿಪ್ಟಿಗೆ ಹೋಗಿ ತಹಪನೇಸ್ ಎಂಬ ಊರಿಗೆ ಸೇರಿಸಿದರು. ಸರ್ವೇಶ್ವರನ ಮಾತನ್ನು ಅವರು ಕೇಳಲೇ ಇಲ್ಲ.

### ನೆಬೂಕದ್ನೆಚ್ಚರನಿಂದ ಈಜಿಪ್ಟಿನ ಮೇಲೆ ಧಾಳಿ

8 ಯೆರೆಮೀಯನು ತಹಪನೇಸಿನಲ್ಲಿರುವಾಗ ಸರ್ವೇಶ್ವರನ ಈ ವಾಣಿ ಕೇಳಿ ಬಂದಿತು:
9"ನೀನು ದೊಡ್ಡ ಕಲ್ಲುಗಳನ್ನು ಎತ್ತಿಕೊಂಡು ಹೋಗಿ ತಹಪನೇಸಿನಲ್ಲಿರುವ ಫರೋಹನ ಮನೆಯ ಮುಂದೆ, ಯೆಹೂದ್ಯರ ಕಣ್ಣೆದುರಿಗೆ, ನೆಲಗಟ್ಟಿನ ಕೆಳಗೆ ಇಟ್ಟು, ಗಾರೆಯಿಂದ ಮುಚ್ಚಿಬಿಟ್ಟು, ಆ ಜನರಿಗೆ ಹೀಗೆಂದು ಹೇಳು:
10'ಇಸ್ರಯೇಲರ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಹೇಳುವುದನ್ನು ಕೇಳಿ: ನಾನು ಬಾಬಿಲೋನಿನ ಅರಸನು ಹಾಗು ನನ್ನ ಸೇವಕನು ಆದ ನೆಬೂಕದ್ನೆಚ್ಚರನನ್ನು ನಾನು ಕರೆಯಿಸುವೆನು. ನಾನು ಮರೆಮಾಡಿಟ್ಟಿರುವ ಈ ಕಲ್ಲುಗಳ ಮೇಲೆಯೆ ಅವನು ತನ್ನ ಸಿಂಹಾಸನವನ್ನು ಹಾಕಿಸುವೆನು. ಈ ಕಲ್ಲುಗಳ ಮೇಲೆಯೆ ತನ್ನ ರತ್ನಗಂಬಳಿಯನ್ನು ಹಾಸಿಸುವನು.
11ಅವನು ಬಂದು ಈಜಿಪ್ಟ್ ದೇಶದ ಮೇಲೆ ಧಾಳಿಮಾಡುವನು. ಮರಣಕ್ಕೆ ಗೊತ್ತಾದವರು ಮರಣಕ್ಕೆ, ಸೆರೆಮನೆಗೆ ಗೊತ್ತಾದವರು ಸೆರೆಮನೆಗೆ, ಖಡ್ಗಕ್ಕೆ ಗೊತ್ತಾದವರು ಖಡ್ಗಕ್ಕೆ ಗುರಿಯಾಗುವರು.
12ಅವನು ಈಜಿಪ್ಟಿನ ದೇವತೆಗಳ ಆಲಯಗಳಿಗೆ ಬೆಂಕಿ ಹೊತ್ತಿಸುವನು. ಅವುಗಳನ್ನು ಸುಟ್ಟು ಆ ದೇವತೆಗಳನ್ನು ಸೆರೆಗೊಯ್ಯುವನು. ಕುರುಬನು ತನ್ನ ಕಂಬಳಿಯನ್ನು ಸೋಸುವಂತೆ ಅವನು ಈಜಿಪ್ಟನ್ನು ಸೋಸುವನು.
13ಬಳಿಕ ಹಾಯಾಗಿ ಅಲ್ಲಿಂದ ಹೊರಟುಹೋಗುವನು. ಅವನು ಈಜಿಪ್ಟ್ ದೇಶದಲ್ಲಿರುವ ಸೂರ್ಯ ದೇವಾಲಯದ ಸ್ತಂಭಗಳನ್ನು ಒಡೆದುಹಾಕುವನು, ಅಲ್ಲಿನ ದೇವತೆಗಳ ಆಲಯಗಳನ್ನು ಸುಟ್ಟು ಹಾಕುವನು."

## ಈಜಿಪ್ಟಿನಲ್ಲಿದ್ದ ಇಸ್ರಯೇಲರಿಗೆ ಸರ್ವೇಶ್ವರನ ಸಂದೇಶ

**44** ಈಜಿಪ್ಟ್ ದೇಶದ ಮಿಗ್ದೋಲ್, ತಹಪನೇಸ್, ನೋಫ್ ಎಂಬ ನಗರಗಳಲ್ಲೂ ಮತ್ತು ಪತ್ರೋಸ್
ಪ್ರಾಂತ್ಯದಲ್ಲೂ ವಾಸಮಾಡುತ್ತಿದ್ದ ಯೆಹೂದ್ಯರೆಲ್ಲರ ವಿಷಯವಾಗಿ ಸರ್ವೇಶ್ವರಸ್ವಾಮಿ ಯೆರೆಮೀಯನಿಗೆ
ತಿಳಿಯಪಡಿಸಿದ ವಾಣಿ ಇದು: 2"ಇಸ್ರಯೇಲಿನ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ
ಹೀಗೆನ್ನುತ್ತಾರೆ: 'ನಾನು ಜೆರುಸಲೇಮಿಗು ಹಾಗು ಜುದೇಯದ ಎಲ್ಲ ಊರುಗಳಿಗು ಬರಮಾಡಿದ ಕೇಡನ್ನು
ನೀವೇ ನೋಡಿದ್ದೀರಿ. 3ಅಲ್ಲಿನವರು ತಮಗೂ ನಿಮಗೂ ಮತ್ತು ನಿಮ್ಮ ಪೂರ್ವಜರಿಗೂ ತಿಳಿಯದ ಅನ್ಯ
ದೇವತೆಗಳಿಗೆ ಧೂಪಾರತಿ ಎತ್ತಿ ಪೂಜಿಸುವುದಕ್ಕೆ ತವಕಪಟ್ಟರು. ನನ್ನನ್ನು ಕೆಣಕಬೇಕೆಂದೇ ಈ
ದುರಾಚಾರವನ್ನು ನಡೆಸಿದರು. ಆದ್ದರಿಂದಲೇ ಆ ಸ್ಥಳಗಳು ಹಾಳಾದವು, ನಿರ್ಜನಪ್ರದೇಶಗಳಾದವು. 4ನಾನು
ನನ್ನ ದಾಸರಾದ ಪ್ರವಾದಿಗಳನ್ನೆಲ್ಲಾ ಅವರ ಬಳಿಗೆ ತಡಮಾಡದೆ ಕಳುಹಿಸುತ್ತಾ ಬಂದೆ. 'ಎಚ್ಚರಿಕೆ, ನಾನು
ಹೇಸುವ ಈ ಅಸಹ್ಯ ಕಾರ್ಯಗಳನ್ನು ಮಾಡಬೇಡಿ' ಎಂದು ಪ್ರಕಟಿಸುತ್ತಾ ಬಂದೆ. 5ಆದರೂ ಅವರು
ಕಿವಿಗೊಟ್ಟು ಕೇಳಲಿಲ್ಲ. ಅನ್ಯ ದೇವತೆಗಳಿಗೆ ಧೂಪಾರತಿ ಎತ್ತುವುದನ್ನು ನಿಲ್ಲಿಸಲಿಲ್ಲ. ತಮ್ಮ ದುರಾಚಾರವನ್ನು
ಕೈಬಿಡಲಿಲ್ಲ. 6ಆದ ಕಾರಣ, ನನ್ನ ರೌದ್ರ ಕೋಪಾಗ್ನಿ ಸುರಿದು ಜುದೇಯದ ಊರುಗಳಲ್ಲೂ ಜೆರುಸಲೇಮಿನ
ಬೀದಿಗಳಲ್ಲೂ ಧಗಧಗಿಸಿತು. ಅವು ಈಗಲೂ ಹಾಳುಪಾಳಾಗಿವೆ.'

7 "ಹೀಗಿರಲು, ಸೇನಾಧೀಶ್ವರಸ್ವಾಮಿಯೂ ಇಸ್ರಯೇಲಿನ ದೇವರೂ ಆದ ಸರ್ವೇಶ್ವರ ಈಗ
ಹೇಳುವುದನ್ನು ಕೇಳಿ: 'ಈ ದೊಡ್ಡ ಕೇಡನ್ನು ನಿಮಗೆ ನೀವೆ ಬರಮಾಡಿಕೊಳ್ಳುವುದು ಸರಿಯೆ? ಈ
ದುರಾಚಾರದ ನಿಮಿತ್ತ ಜುದೇಯದ ಗಂಡಸರು, ಹೆಂಗಸರು, ಮಕ್ಕಳು, ಮೊಲೆಕೂಸುಗಳು
ನಿರ್ಮೂಲವಾಗುವರು. ನಿಮ್ಮಲ್ಲಿ ಯಾರೂ ಉಳಿಯರು. 8ಪ್ರವಾಸಿಗಳಾಗಿ ನೀವು ಬಂದಿರುವ ಈಜಿಪ್ಟಿನಲ್ಲಿ
ಅನ್ಯದೇವತೆಗಳಿಗೆ ಧೂಪಾರತಿ ಎತ್ತುವ ದುಷ್ಕೃತ್ಯವನ್ನು ನಡೆಸುತ್ತಾ ನನ್ನನ್ನು ಕೆಣಕುತ್ತಿದ್ದೀರಿ. ಆದ್ದರಿಂದ
ನೀವೂ ನಿರ್ಮೂಲರಾಗಿ ಎಲ್ಲ ಭೂರಾಜ್ಯಗಳ ಶಾಪ, ನಿಂದೆ, ದೂಷಣೆಗಳಿಗೆ ಗುರಿಯಾಗುವಿರಿ. 9ನಿಮ್ಮ
ಪೂರ್ವಜರು, ಜುದೇಯದ ಅರಸರು, ಅವರ ಪತ್ನಿಯರು, ನೀವು, ನಿಮ್ಮ ಹೆಂಡತಿಯರು, ಇವರೆಲ್ಲರು
ಜುದೇಯದ ನಾಡಿನಲ್ಲೂ ಜೆರುಸಲೇಮಿನ ಹಾದಿ ಬೀದಿಗಳಲ್ಲೂ ನಡೆಸಿದ ದುರಾಚಾರಗಳನ್ನು ನೀವು
ಮರೆತುಬಿಟ್ಟಿರೋ? 10ಅವರು ಇಂದಿನವರೆಗೂ ಪಶ್ಚಾತ್ತಾಪಪಡಲಿಲ್ಲ. ನನಗೆ ಭಯ ಪಡಲಿಲ್ಲ. ನಿಮಗೂ
ನಿಮ್ಮ ಪೂರ್ವಜರಿಗೂ ನಾನು ನೇಮಿಸಿದ ನಿಯಮನಿಷ್ಠೆಗಳನ್ನು ಅನುಸರಿಸಿ ನಡೆಯಲಿಲ್ಲ."

11 "ಆದಕಾರಣ ಇಸ್ರಯೇಲಿನ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಹೇಳುವುದನ್ನು
ಕೇಳಿರಿ: 'ಜುದೇಯವನ್ನೆಲ್ಲ ನಿರ್ಮೂಲ ಮಾಡುವೆನು. ಕೇಡಿಗಾಗಿಯೇ ನಿಮ್ಮ ಮೇಲೆ ಕಣ್ಣಿಡುವೆನು.
12ಈಜಿಪ್ಟಿಗೆ ಹೋಗಿ ಅಲ್ಲಿ ಪ್ರವಾಸಿಸಲು ಹಟ ಹಿಡಿದ ಆ ಜುದೇಯದ ಅಳಿದುಳಿದ ಜನರನ್ನು
ನಾಶಮಾಡುವೆನು. ಈಜಿಪ್ಟಿನಲ್ಲೆ ಅವರು ಮಣ್ಣು ಪಾಲಾಗುವರು. ಖಡ್ಗ-ಕ್ಷಾಮಗಳಿಂದ ಅಳಿದು
ಹೋಗುವರು. ಚಿಕ್ಕವರು-ದೊಡ್ಡವರು ಎನ್ನದೆ ಖಡ್ಗ-ಕ್ಷಾಮಗಳಿಗೆ ತುತ್ತಾಗಿ, ಅಪವಾದ, ಅಪಹಾಸ್ಯಗಳಿಗೂ
ಶಾಪ, ನಿಂದೆ, ದೂಷಣೆಗಳಿಗೂ ಗುರಿಯಾಗುವರು. 13ಜೆರುಸಲೇಮಿನವರನ್ನು ಖಡ್ಗ-ಕ್ಷಾಮ-ವ್ಯಾಧಿಗಳಿಂದ
ದಂಡಿಸಿದಂತೆ ಈಜಿಪ್ಟಿನಲ್ಲಿ ವಾಸಿಸುವವರನ್ನೂ ದಂಡಿಸುವೆನು. 14ಈಜಿಪ್ಟಿಗೆ ಹೋಗಿ ಪ್ರವಾಸಿಸುತ್ತಿರುವ ಆ
ಜುದೇಯದ ಅಳಿದುಳಿದ ಜನರು ಸ್ವದೇಶಕ್ಕೆ ಹಿಂದಿರುಗಬೇಕೆಂದು ಎಷ್ಟು ಆಶಿಸಿದರೂ ಅವರಲ್ಲಿ ಯಾರೂ
ಅಲ್ಲಿಂದ ತಪ್ಪಿಸಿಕೊಂಡು ಜುದೇಯಕ್ಕೆ ಹಿಂದಿರುಗರು. ಕೆಲವು ನಿರಾಶ್ರಿತರನ್ನು ಬಿಟ್ಟರೆ ಯಾವನೂ
ಹಿಂತಿರುಗುವುದಿಲ್ಲ'."

15 ಆಗ ತಮ್ಮ ಹೆಂಡತಿಯರು ಅನ್ಯದೇವತೆಗಳಿಗೆ ಧೂಪಾರತಿ ಎತ್ತುತ್ತಿದ್ದರೆಂದು ತಿಳಿದುಕೊಂಡ
ಗಂಡಸರು, ಅಲ್ಲೆ ದೊಡ್ಡ ಗುಂಪಾಗಿ ನಿಂತಿದ್ದ ಹೆಂಗಸರು, ಹಾಗೂ ಈಜಿಪ್ಟಿನಲ್ಲೂ ಪತ್ರೋಸಿನಲ್ಲೂ
ವಾಸವಾಗಿದ್ದ ಎಲ್ಲ ಜನರು ಯೆರೆಮೀಯನಿಗೆ ಹೀಗೆಂದು ಉತ್ತರಕೊಟ್ಟರು: 16"ಸರ್ವೇಶ್ವರನ ಹೆಸರಿನಲ್ಲಿ
ನೀನು ನಮಗೆ ನುಡಿದ ಮಾತನ್ನು ನಾವು ಕೇಳಲೊಲ್ಲೆವು. 17ನಾವು, ನಮ್ಮ ಪೂರ್ವಜರು, ನಮ್ಮ ಅರಸರು,
ಅಧಿಕಾರಿಗಳು ಜುದೇಯದ ಊರುಗಳಲ್ಲಿ ಮತ್ತು ಜೆರುಸಲೇಮಿನ ಬೀದಿಗಳಲ್ಲಿ ಮಾಡಿದಂತೆ
ಗಗನದೊಡತಿಯಾದ ದೇವತೆಗೆ ಧೂಪಾರತಿ ಎತ್ತುತ್ತೇವೆ, ಪಾನನೈವೇದ್ಯವನ್ನು ಸುರಿಯುತ್ತೇವೆ. ನಾವು

ಬಾಯಿಬಿಟ್ಟು ಹೇಳಿದ ಈ ಮಾತುಗಳನ್ನೆಲ್ಲಾ ಖಂಡಿತವಾಗಿ ನೆರವೇರಿಸುತ್ತೇವೆ. ಏಕೆಂದರೆ ಹಾಗೆ ಮಾಡುತ್ತಿದ್ದಾಗ ನಾವು ಯಾವ ಕೇಡನ್ನೂ ಕಾಣದೆ ಹೊಟ್ಟೆತುಂಬ ಉಂಡು ಸುಖಪಡುತ್ತಿದ್ದೆವು. 18ಆ ಗಗನ ದೊಡತಿಗೆ ಧೂಪಾರತಿ ಎತ್ತುವುದನ್ನೂ ಪಾನವನ್ನು ನೈವೇದ್ಯವಾಗಿ ಸುರಿಯುವುದನ್ನೂ ನಿಲ್ಲಿಸಿ ಬಿಟ್ಟಂದಿನಿಂದ ಎಲ್ಲಾ ತರಹದ ಕೊರತೆಗೆ ಗುರಿಯಾಗುತ್ತಿದ್ದೇವೆ, ಖಡ್ಗ-ಕ್ಷಾಮಗಳಿಂದ ನಾಶವಾಗುತ್ತಿದ್ದೇವೆ."

19 ಮಹಿಳೆಯರು, "ಗಗನದೊಡತಿಗೆ ಧೂಪಾರತಿ ಎತ್ತಿ, ಪಾನನೈವೇದ್ಯವನ್ನು ಸುರಿಯುತ್ತಿದ್ದಾಗ ನಾವು ಆಕೆಯ ಪೂಜೆಗಾಗಿ ಆಕೆಯ ಆಕಾರದಂಥ ಹೋಳಿಗೆಗಳನ್ನು ಮಾಡಿ ಪಾನದ್ರವ್ಯವನ್ನು ಅರ್ಪಿಸುತ್ತಿದ್ದುದು ನಮ್ಮ ಗಂಡಂದಿರಿಗೆ ಒಪ್ಪಿಗೆಯಾಗಿರಲಿಲ್ಲವೆ?" ಎಂದರು.

20ಆಗ ಯೆರೆಮೀಯನು ಆ ಗಂಡಸರಿಗೆ, ಮಹಿಳೆಯರಿಗೆ ಹಾಗು ತನಗೆ ಉತ್ತರಕೊಟ್ಟ ಎಲ್ಲ ಜನರಿಗೆ ಹೀಗೆಂದು ಹೇಳಿದನು: 21ನೀವು, ನಿಮ್ಮ ಪೂರ್ವಜರು, ನಿಮ್ಮ ಅರಸರು, ಅಧಿಕಾರಿಗಳು, ಜನಸಾಮಾನ್ಯರು ಮತ್ತು ನೀವೆಲ್ಲರು ಜುದೇಯದ ಊರುಗಳಲ್ಲೂ ಜೆರುಸಲೇಮಿನ ಬೀದಿಗಳಲ್ಲೂ ಎತ್ತಿದ ಧೂಪಾರತಿ ಸರ್ವೇಶ್ವರನ ನೆನಪಿನಲ್ಲಿ ಇದೆ ಅಲ್ಲವೆ? ಅದನ್ನು ಅವರು ಮರೆತುಬಿಟ್ಟಿದ್ದಾರೆಯೇ? 22ನೀವು ನಡೆಸಿದ ದುರಾಚಾರಗಳನ್ನು ಹಾಗು ಅಸಹ್ಯ ಕಾರ್ಯಗಳನ್ನು ಸರ್ವೇಶ್ವರ ಇನ್ನು ಸಹಿಸಲಾರದೆ ಹೋದುದರಿಂದಲೇ ನಿಮ್ಮ ನಾಡು ಹಾಳು ಬಿದ್ದಿದೆ. ನಿರ್ಜನವಾಗಿ ಭಯಭೀತಿಗೆ ಎಡೆ ಆಗಿದೆ. ಅದರ ಸ್ಥಿತಿ ಈಗಲೂ ಬದಲಾಗಿಲ್ಲ. 23ನೀವು ಸರ್ವೇಶ್ವರಸ್ವಾಮಿಯ ಮಾತನ್ನು ಕೇಳದೆ, ಅವರ ಧರ್ಮಶಾಸ್ತ್ರವನ್ನೂ ನಿಬಂಧನೆಗಳನ್ನೂ ಕಟ್ಟಳೆಗಳನ್ನೂ ಅನುಸರಿಸದೆ, ಪಾಪ ಮಾಡಿ ಅನ್ಯದೇವತೆಗಳಿಗೆ ಧೂಪಾರತಿ ಎತ್ತಿದ್ದರಿಂದಲೇ ಇಂಥಾ ವಿಪತ್ತು ನಿಮಗೆ ಸಂಭವಿಸಿದೆ.

24-25 ಇದಲ್ಲದೆ ಯೆರೆಮೀಯನು ಆ ಎಲ್ಲ ಜನರಿಗೆ ಮುಖ್ಯವಾಗಿ ಮಹಿಳೆಯರಿಗೆ, ಹೀಗೆ ಹೇಳಿದನು: "ಈಜಿಪ್ಟಿನಲ್ಲಿರುವ ಯೆಹೂದ್ಯರೇ, ನಿಮ್ಮೆಲ್ಲರಿಗೆ ಸರ್ವೇಶ್ವರ ಹೀಗೆನ್ನುತ್ತಾರೆ – 'ಗಗನದೊಡತಿಗೆ ಧೂಪಾರತಿ ಎತ್ತಿ ಪಾನ ನೈವೇದ್ಯವನ್ನು ಸುರಿಯುತ್ತೇವೆ. ಅದಕ್ಕಾಗಿ ಮಾಡಿಕೊಂಡ ಹರಕೆಯನ್ನು ಖಂಡಿತವಾಗಿ ತೀರಿಸುತ್ತೇವೆ ಎಂಬುದಾಗಿ ನೀವೂ ನಿಮ್ಮ ಹೆಂಡತಿಯರೂ ಬಾಯಿಂದ ಪ್ರತಿಜ್ಞೆಮಾಡಿದ್ದೀರಿ, ಕೈಯಿಂದ ನೆರವೇರಿಸಿದ್ದೀರಿ! ಸರಿಸರಿ, ನಿಮ್ಮ ಹರಕೆಗಳನ್ನು ತೀರಿಸಿರಿ, ಅವುಗಳನ್ನು ಬಿಡದೆ ನೆರವೇರಿಸಿರಿ! 26ಈಜಿಪ್ಟಿನಲ್ಲಿ ವಾಸವಾಗಿರುವ ಯೆಹೂದ್ಯರೇ, ನೀವೆಲ್ಲರು ಸರ್ವೇಶ್ವರನಾದ ನಾನು ಹೇಳುವ ಮಾತನ್ನು ಕೇಳಿರಿ: 'ಸರ್ವೇಶ್ವರನಾದ ದೇವರ ಜೀವದಾಣೆ' ಎಂದು ನನ್ನ ಹೆಸರನ್ನು ಬಾಯಿಂದ ಉಚ್ಚರಿಸಲಿಕ್ಕೆ ಈಜಿಪ್ಟಿನಲ್ಲಿ ಯಾವ ಯೆಹೂದ್ಯನು ಇನ್ನಿರನು ಎಂಬುದಾಗಿ ನನ್ನ ಮಹಾನಾಮದ ಮೇಲೆ ಆಣೆ ಇಟ್ಟಿದ್ದೇನೆ. 27ಇಗೋ, ನಿಮಗೆ ಒಳಿತನ್ನು ಅಲ್ಲ, ಕೇಡನ್ನೇ ಬರಮಾಡಬೇಕೆಂದು ನಿಮ್ಮ ವಿಷಯದಲ್ಲಿ ಎಚ್ಚರಗೊಂಡಿದ್ದೇನೆ. ಈಜಿಪ್ಟಿನ ಎಲ್ಲ ಯೆಹೂದ್ಯರು ಖಡ್ಗ-ಕ್ಷಾಮಗಳಿಂದ ನಾಶ ಹೊಂದುತ್ತಾ ನಿರ್ನಾಮವಾಗುವರು. 28ಖಡ್ಗಕ್ಕೆ ತಪ್ಪಿಸಿಕೊಂಡ ಕೊಂಚ ಜನರು ಮಾತ್ರ ಈಜಿಪ್ಟಿನಿಂದ ಜುದೇಯಕ್ಕೆ ಹಿಂದಿರುಗುವರು. ಈಜಿಪ್ಟಿಗೆ ಹೋಗಿ ಪ್ರವಾಸಿಸುತ್ತಿರುವ ಅಳಿದು ಉಳಿದ ಯೆಹೂದ್ಯರೆಲ್ಲರು, ನನ್ನ ಮಾತು ದಿಟವಾಯಿತೋ ಅಥವಾ ಅವರ ಮಾತು ದಿಟವಾಯಿತೋ ಎಂದು ಆಗ ತಿಳಿದುಕೊಳ್ಳುವರು.'

29 'ನಾನು ನಿಮ್ಮನ್ನು ಈ ಸ್ಥಳದಲ್ಲೇ ದಂಡಿಸುವೆನು ಎಂಬುದಕ್ಕೆ ಒಂದು ಗುರುತು ಕಾಣುವುದು. ನನ್ನ ಮಾತು ಈಡೇರಿ ನಿಮಗೆ ಕೇಡು ಉಂಟಾಗುವುದು ಎಂಬುದಾಗಿ ಅದರಿಂದಲೇ ನಿಮಗೆ ತಿಳಿದುಬರುವುದು; 30ಆ ಗುರುತು ಯಾವುದೆಂದರೆ: ಇಗೋ ಜುದೇಯದ ಅರಸ ಚಿದ್ಕೀಯನನ್ನು ಅವನ ಪ್ರಾಣ ಶತ್ರುವಾದ ಬಾಬಿಲೋನಿಯದ ಅರಸ ನೆಬೂಕದ್ನೆಚ್ಚರನ ಕೈಗೆ ಒಪ್ಪಿಸಿದಂತೆ ಈಜಿಪ್ಟಿನ ಅರಸನಾದ ಫರೋಹ ಹೊಫ್ರನನ್ನು ಅವನ ಪ್ರಾಣ ಹುಡುಕುವ ಶತ್ರುಗಳ ಕೈಗೆ ಒಪ್ಪಿಸುವೆನು. ಇದು ಸರ್ವೇಶ್ವರನಾದ ನನ್ನ ನುಡಿ'."

### ಬಾರೂಕನನ್ನು ಕುರಿತ ಭವಿಷತ್ ವಾಣಿ

**45** ಯೋಷೀಯನ ಮಗನೂ ಜುದೇಯದ ಅರಸನೂ ಆದ ಯೆಹೋಯಾಕೀಮನ ಆಳ್ವಿಕೆಯ ನಾಲ್ಕನೆಯ ವರ್ಷದಲ್ಲಿ ನೇರೀಯನ ಮಗ ಬಾರೂಕನು ಯೆರೆಮೀಯನ ಮಾತುಗಳನ್ನು ಅವನ ಬಾಯಿಂದ

ಬಂದ ಹಾಗೆಯೇ ಪುಸ್ತಕದಲ್ಲಿ ಬರೆದನು. ಆಗ ಪ್ರವಾದಿ ಯೆರೆಮೀಯನು ಸರ್ವೇಶ್ವರನ ಆಜ್ಞೆಯ ಪ್ರಕಾರ
ಈ ವಾಕ್ಯವನ್ನು ಬಾರೂಕನಿಗೆ ನುಡಿದನು. 2"ಬಾರೂಕನೇ, ಇಸ್ರಯೇಲಿನ ದೇವರಾದ ಸರ್ವೇಶ್ವರಸ್ವಾಮಿ
ನಿನಗೆ ಹೇಳುವುದನ್ನು ಕೇಳು: ನೀನು, 'ಅಯ್ಯೋ, ನನಗೆ ಕೇಡು! 3ವ್ಯಥೆಪಡುತ್ತಿದ್ದ ನನಗೆ ಸರ್ವೇಶ್ವರ
ದುಃಖದ ಮೇಲೆ ದುಃಖ ಕಳುಹಿಸಿದ್ದಾರೆ. ನಾನು ನರಳಿ ದಣಿದು ಹೋಗಿದ್ದೇನೆ. ನನಗೆ ಯಾವ
ನೆಮ್ಮದಿಯೂ ದೊರಕದಿದೆ' ಎಂದು ಹೇಳುತ್ತಿರುವೆ ಅಲ್ಲವೆ?

4 "ಸರ್ವೇಶ್ವರನ ಈ ವಾಣಿಯನ್ನು ಕೇಳು: 'ನೋಡು, ನಾನು ಕಟ್ಟಿದ್ದನ್ನು ನಾನೇ ಕೆಡವುತ್ತೇನೆ.
ನಾನು ನೆಟ್ಟಿದ್ದನ್ನು ನಾನೇ ಕಿತ್ತು ಹಾಕುತ್ತೇನೆ. ಹೌದು, ಜಗದಲ್ಲೆಲ್ಲ ಹಾಗೆ ಮಾಡುತ್ತೇನೆ. 5ನಿನಗೆ ಮಾತ್ರ
ಪ್ರತ್ಯೇಕ ಸ್ಥಾನಮಾನಗಳನ್ನು ನಿರೀಕ್ಷಿಸುತ್ತಿಯೋ? ನಿರೀಕ್ಷಿಸಬೇಡ. ಹೌದು, ಮಾನವ ಜನಾಂಗವನ್ನೇ ನಾನು
ದಂಡಿಸಲಿದ್ದೇನೆ. ಆದರೆ ನೀನು ಎಲ್ಲಿಗೆ ಹೋದರೂ ನಿನ್ನ ಪ್ರಾಣವೊಂದನ್ನು ಕೊಳ್ಳೆಯಂತೆ ಉಳಿಸಿಕೊಳ್ಳಲಿಕ್ಕೆ
ಅವಕಾಶ ನೀಡುತ್ತೇನೆ. ಇದು ಸರ್ವೇಶ್ವರನಾದ ನನ್ನ ನುಡಿ."

### ರಾಷ್ಟ್ರಗಳನ್ನು ಕುರಿತ ಭವಿಷತ್ ವಾಣಿ

**46** ರಾಷ್ಟ್ರಗಳ ವಿಷಯವಾಗಿ ಸರ್ವೇಶ್ವರ ಸ್ವಾಮಿ ಪ್ರವಾದಿ ಯೆರೆಮೀಯನಿಗೆ ಅನುಗ್ರಹಿಸಿದ ವಾಣಿ ಇದು:

ಈಜಿಪ್ಟನ್ನು ಕುರಿತ ವಾಣಿ: 2ಯೋಷೀಯನ ಮಗನೂ ಜುದೇಯದ ಅರಸನೂ ಆದ
ಯೆಹೋಯಾಕೀಮನ ಆಳ್ವಿಕೆಯ ನಾಲ್ಕನೆಯ ವರ್ಷದಲ್ಲಿ ಈಜಿಪ್ಟಿನ ಅರಸನಾದ ಫರೋಹ ನೆಕೋವಿನ
ಸೈನ್ಯವು ಯೂಫ್ರೆಟಿಸ್ ನದಿಯ ಬಳಿ ಕರ್ಕೆಮೀಷಿನಲ್ಲಿ ಇರುವಾಗ ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು
ಆ ಸೈನ್ಯದ ಮೇಲೆ ದಾಳಿಮಾಡಿದ ವಿಷಯ:

3 "ಗುರಾಣಿ ಖೇಡ್ಯಗಳನ್ನು ಸಿದ್ಧಮಾಡಿ
ಯುದ್ಧಕ್ಕೆ ಹೊರಡಿ !
4 ರಥಾಶ್ವಗಳನ್ನು ಕಟ್ಟಿರಿ, ವಾಹನಾಶ್ವಗಳನ್ನು
ಹತ್ತಿರಿ,
ಶಿರಸ್ತ್ರಾಣಗಳನ್ನು ಹಾಕಿಕೊಂಡು ಯುದ್ಧಕ್ಕೆ
ನಿಲ್ಲಿ.
ಭರ್ಜಿಗಳನ್ನು ಬೆಳಗಿರಿ, ಕವಚಗಳನ್ನು
ತೊಟ್ಟುಕೊಳ್ಳಿರಿ!"
5 "ಆದರೆ, ನನ್ನ ಕಣ್ಣಿಗೆ ಕಾಣುತ್ತಿರುವುದೇನು?
ಅವರು ಓಡುತ್ತಿರುವರು ನೋಡು,
ಧೈರ್ಯಗೆಟ್ಟು, ಬೆನ್ನುಗೊಟ್ಟು.
ಅವರ ಶೂರರು ಹಿಂದಿರುಗದೆ ಓಡುತ್ತಿರುವರು
ಪೆಟ್ಟುತಿಂದು.
ದಿಗಿಲು ಕವಿದಿದೆ ಸುತ್ತ ಮುತ್ತಲು,"
ಸರ್ವೇಶ್ವರನ ವಾಣಿ ಇದು.
6 "ವೇಗಶಾಲಿಗಳು ಓಡಿ ಹೋಗಲಾರರು
ಬಲಿಷ್ಠರು ತಪ್ಪಿಸಿಕೊಳ್ಳಲಾರರು.
ಉತ್ತರದಲ್ಲಿ, ಯೂಫ್ರೆಟಿಸ್ ನದಿಯ
ಹತ್ತಿರದಲ್ಲಿ,
ಎಡವಿಬಿದ್ದಿರುವರು.
7 ಈ ಪ್ರವಾಹ ಯಾವುದು?
ನೈಲ್ ನದಿಯಂತೆ ಉಬ್ಬಿರುವುದಲ್ಲಾ?

ನೈಲಿನ ಶಾಖೆಗಳ ಹಾಗೆ ತುಂಬಿ
ತುಳುಕುತ್ತಿದೆಯಲ್ಲಾ?
8 ಈಜಿಪ್ಟ್ ನದಿ ಉಬ್ಬಿದೆ, ನೈಲ್ ನದಿಯಂತೆ
ಈಜಿಪ್ಟೆಂಬ ಪ್ರವಾಹವೇ ತುಂಬಿ ತುಳುಕುತ್ತಿದೆ
ನೈಲಿನ ಶಾಖೆಗಳಂತೆ,
'ನಾನು ಉಬ್ಬಿಕೊಂಡು ಲೋಕದೊಳಗೆಲ್ಲಾ
ಹಬ್ಬುವೆನು
ನಗರಗಳನ್ನೂ ಅವುಗಳ ನಿವಾಸಿಗಳನ್ನೂ
ನಾಶಮಾಡುವೆನು' ಎಂದು
ಕೊಳ್ಳುತ್ತಿರುವುದು.
9 ಅಶ್ವಗಳೇ, ಕುಣಿದಾಡಿ; ರಥಗಳೇ,
ರಭಸವಾಗಿ ಓಡಿ !
ಹೊರಡಲಿ ಶೂರರು, ಖೇಡ್ಯ ಸನ್ನದ್ಧರಾದ
ಸುಡಾನರು, ಲಿಬಿಯಾದವರು
ಮುನ್ನುಗ್ಗಲಿ ಧನುರ್ಧಾರಿಗಳಾದ
ಲಿಡಿಯದವರು.
10 ಆದರೆ ಈ ದಿನ, ಯುದ್ಧದ ದಿನ
ಸೇನಾಧೀಶ್ವರನೆಂಬ ಸರ್ವೇಶ್ವರಸ್ವಾಮಿ
ಶತ್ರುಗಳಿಗೆ ಮುಯ್ಯಿ ತೀರಿಸುವ ದಿನ
ಇದು ದಂಡನೆಯ ದಿನ.
ಇಂದು ಖಡ್ಗವು ಕಬಳಿಸುವುದು ತೃಪ್ತಿಯಾಗಿ
ರಕ್ತವನ್ನು ಹೀರುವುದು ಸಂತೃಪ್ತಿಯಾಗಿ
ಉತ್ತರದ ಯೂಫ್ರೆಟಿಸ್ ನದಿಯ ಹತ್ತಿರ
ಬಲಿಮಾಡಬೇಕೆಂದಿರುವನು ಸರ್ವಶಕ್ತನೆಂಬ
ಸರ್ವೇಶ್ವರ.
11 ಈಜಿಪ್ಟಿನ ಕನ್ಯೆಯೇ, ಯುವತಿಯೇ,
ಗಿಲ್ಯಾದಿಗೆ ಹೋಗಿ ಔಷಧವನ್ನು ಕೊಂಡು ಬಾ
ನಿನ್ನ ಬಗೆಬಗೆಯ ಮದ್ದುಗಳಿಂದ
ಪ್ರಯೋಜನವಿಲ್ಲ
ಅವುಗಳಿಂದ ನಿನಗೆ ಗುಣವಾಗುವಂತಿಲ್ಲ!
12 ನಿನ್ನ ಲಜ್ಜೆಯ ಸುದ್ದಿ ರಾಷ್ಟ್ರಗಳಿಗೆ ಮುಟ್ಟಿದೆ
ಲೋಕವೆಲ್ಲಾ ನಿನ್ನ ಗೋಳಾಟದಿಂದ ತುಂಬಿದೆ
ಯೋಧನು ಯೋಧನನ್ನು ಎಡವಿ,
ಇಬ್ಬರೂ ಬಿದ್ದಿರುವರು ಕೆಳಗೆ."

### ಈಜಿಪ್ಟಿನ ಮೇಲೆ ದಾಳಿ

13 ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ಬಂದು ಈಜಿಪ್ಟ್ ದೇಶದ ಮೇಲೆ ಮುತ್ತಿಗೆ ಹಾಕುವನು
ಎಂಬುದಾಗಿ ಸರ್ವೇಶ್ವರನಿಂದ ಪ್ರವಾದಿ ಯೆರೆಮೀಯನಿಗೆ ಕೇಳಿ ಬಂದ ವಾಣಿ:
14 "ಪ್ರಕಟಿಸಿರಿ ಈಜಿಪ್ಟಿನಲ್ಲಿ,
ಪ್ರಚುರಪಡಿಸಿರಿ ಮಿಗ್ದೋಲ್, ತಹಪನೇಸ್,

ಹಾಗು ಸೋಫ್ ಎಂಬೀ ನಗರಗಳಲ್ಲಿ.
ಸಾರಿರಿ ಇಂತೆಂದು: 'ಈಜಿಪ್ಟೇ,
ಸ್ಥಿರವಾಗಿ ನಿಲ್ಲು, ಯುದ್ಧ ಸನ್ನದ್ಧವಾಗು,
ಖಡ್ಗ ಆವರಿಸುತ್ತಿದೆ ನಿನ್ನ ಸುತ್ತಮುತ್ತಲು'
15 ನಿನ್ನ ಎಪಿಸ್ ಬಸವ ಬಿದ್ದು ಹೋದದ್ದೇನು?
ಸರ್ವೇಶ್ವರನೆ ಕೆಡವಲು ಅದು ನಿಲ್ಲಲಾರದೆ
ಹೋಯಿತು!
16 ಬಹು ಜನರು ಮುಗ್ಗರಿಸಿ ಬಿದ್ದರು
ಹೌದು, ಒಬ್ಬರಿಗೊಬ್ಬರು ತಾಕಿ ಬಿದ್ದರು.
'ಎದ್ದು ಜನ್ಮಭೂಮಿಗೆ ತೆರಳೋಣ
ಸ್ವಜನರನ್ನು ಸೇರಿಕೊಳ್ಳೋಣ
ಸಂಹರಿಸುವ ಖಡ್ಗದಿಂದ ತಪ್ಪಿಸಿಕೊಳ್ಳೋಣ'
ಎಂದುಕೊಂಡರು.
17 ಈಜಿಪ್ಟಿನ ಅರಸನು ಗಡಿಬಿಡಿಯ ಮಾತಾಡಿ
ಸದಾವಕಾಶವನ್ನು ಕಳೆದುಕೊಂಡವನೆಂದು
ಕರೆಸಿಕೊಂಡ ವ್ಯಕ್ತಿ.
18 ಇಗೋ, ಸೇನಾಧೀಶ್ವರ ಸರ್ವೇಶ
ಎಂಬ ಹೆಸರುಳ್ಳ ರಾಜಾಧಿರಾಜನ ನುಡಿ:
'ಪರ್ವತಗಳನ್ನು ಮೀರುವ ತಾಬೋರ್
ಬೆಟ್ಟದಂತೆ
ಸಮುದ್ರದಿಂದೆದ್ದಿರುವ ಕರ್ಮೆಲ್ ಗುಡ್ಡದಂತೆ
ಉನ್ನತನೊಬ್ಬನು ಬರುವನು, ನನ್ನ
ಜೀವದಾಣೆ.'
19 ಈಜಿಪ್ಟಿನಲ್ಲಿ ವಾಸಿಸುವ ಯುವತಿಯೇ,
ಸೆರೆಗೆ ಬೇಕಾದ ಸಾಮಗ್ರಿಗಳನ್ನು
ಒದಗಿಸಿಕೊ.
ಮೆಂಫಿಸ್ ನಗರ ಹಾಳಾಗುವುದು
ಅದು ಸುಟ್ಟು ನಿರ್ಜನವಾಗುವುದು.
20 ಈಜಿಪ್ಟ್ ಅಂದವಾದ ಒಂದು ಕಡಸು
ಅದಕ್ಕೆ ಹತ್ತಿಬಿಟ್ಟಿದೆ ಬಡಗಲಿಂದ ಬಂದ
ಉಣ್ಣೆ.
21 ಸಂಬಳಕ್ಕಾಗಿ ಈಜಿಪ್ಟ್ ಸೇರಿದ ದಂಡಾಳುಗಳು
ನೋಡಲಿಕ್ಕೆ ಅವರು ಕೊಬ್ಬಿದ ಕರುಗಳು.
ಆದರೂ ಬೆಂಗೊಟ್ಟು ಓಡಿಹೋಗಿರುವರು
ನಿಲ್ಲದೆ,
ವಿಪತ್ಕಾಲ, ದಂಡನೆಯದಿನ, ಬಂದೊದಗಿದೆ
ಅವರಿಗೆ.
22 ಈಜಿಪ್ಟ್ ದೇಶ ದೌಡಾಯಿಸುವ ಶಬ್ದ
ಸರಿಯುವ ಸರ್ಪದ ಸಪ್ಪಳಕ್ಕೆ ಸಮಾನ.
ಕೊಡಲಿಗಳಿಂದ ಮರಕಡಿಯುವವರಂತೆ

ಶತ್ರುಗಳು ದಂಡೆತ್ತಿ ಬಂದು ಬೀಳುವರು ಆ
ನಾಡಿನ ಮೇಲೆ.
23 ಮಿಡಿತೆಗಳಿಗಿಂತ ಅಸಂಖ್ಯಾತರಾಗುವವರು
ಕಡಿವರವರು ದಾಟಲಾಗದ ಈಜಿಪ್ಟಿನ ದಟ್ಟ
ಕಾಡನ್ನು
ಸರ್ವೇಶ್ವರನ ನುಡಿ ಇದು.
24 ಈಜಿಪ್ಟೆಂಬ ಯುವತಿ ಗುರಿಯಾಗುವಳು
ಅವಮಾನಕ್ಕೆ
ಸಿಕ್ಕಿಬೀಳುವಳು ಬಡಗಲವರ ಕೈಗೆ."
25 ಇಸ್ರಯೇಲಿನ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಹೀಗೆನ್ನುತ್ತಾರೆ: "ಇಗೋ, ನಾನು
ನೋ ಎಂಬ ನಗರದಲ್ಲಿನ ಅಮೋನ್ ದೇವತೆಯನ್ನು, ಫರೋಹನನ್ನು, ಈಜಿಪ್ಟನ್ನು, ಈಜಿಪ್ಟಿನ
ದೇವತೆಗಳನ್ನೂ ಅಲ್ಲಿನ ಅರಸರನ್ನೂ ದಂಡಿಸುವೆನು. ಹೌದು, ಫರೋಹನನ್ನೂ ಅವನಲ್ಲಿ ನಂಬಿಕೆ
ಇಟ್ಟವರನ್ನೂ ದಂಡಿಸುವೆನು. 26ಅವರ ಪ್ರಾಣವನ್ನು ಹುಡುಕುವ ಬಾಬಿಲೋನಿಯದ ಅರಸನಾದ
ನೆಬೂಕದ್ನೆಚ್ಚರನ ಮತ್ತು ಅವನ ಸೇವಕರ ಕೈಗೆ ಅವರನ್ನು ಒಪ್ಪಿಸಿ ಬಿಡುವೆನು. ಆ ಬಳಿಕ ಈಜಿಪ್ಟಿನಲ್ಲಿ
ಪೂರ್ವ ಕಾಲದ ಹಾಗೆ ಜನರು ವಾಸಿಸುವರು. ಇದು ಸರ್ವೇಶ್ವರನಾದ ನನ್ನ ನುಡಿ."
27 "ನನ್ನ ದಾಸ ಯಕೋಬೇ, ಭಯಪಡಬೇಡ
ಇಸ್ರಯೇಲೇ, ಅಂಜಬೇಡ.
ಇಗೋ, ನಾನು ನಿನ್ನನ್ನು ಉದ್ಧರಿಸುವೆನು
ದೂರದೇಶದಿಂದ
ನಿನ್ನ ಸಂತಾನವನ್ನು ರಕ್ಷಿಸುವೆನು ಸೆರೆಹೋದ
ಸೀಮೆಯಿಂದ.
ಯಕೋಬು ಹಾಯಾಗಿ ಹಿಂತಿರುಗಿ
ಬಾಳುವುದು ನೆಮ್ಮದಿಯಿಂದ.
ಭಯಪಡಬೇಡ ನನ್ನ ದಾಸ ಯಕೋಬೇ,
ನಾನಿದ್ದೇನೆ ನಿನ್ನೊಂದಿಗೆ.
ಯಾವ ರಾಷ್ಟ್ರಗಳಿಗೆ ನಿನ್ನನ್ನು ಅಟ್ಟಿದೆನೋ
ಆ ರಾಷ್ಟ್ರಗಳನ್ನೆಲ್ಲ ನಿರ್ಮೂಲ ಮಾಡುವೆನು.
ನಿನ್ನನ್ನಾದರೋ, ನಿರ್ಮೂಲ ಮಾಡೆನು
ಮಿತಿ ಮೀರಿ ಶಿಕ್ಷಿಸೆನು.
ಆದರೆ ಶಿಕ್ಷಿಸದೆ ಬಿಡೆನು.
ಸರ್ವೇಶ್ವರನಾದ ನನ್ನ ನುಡಿ ಇದು."

### ಫಿಲಿಷ್ಟಿಯವನ್ನು ಕುರಿತ ವಾಣಿ

**47** ಫರೋಹನು ಗಾಜ ಊರಿಗೆ ಮುತ್ತಿಗೆ ಹಾಕುವ ಮೊದಲು ಫಿಲಿಷ್ಟಿಯರ ವಿಷಯವಾಗಿ ಪ್ರವಾದಿ
ಯೆರೆಮೀಯನಿಗೆ ಸರ್ವೇಶ್ವರನಿಂದ ಕೇಳಿಬಂದ ವಾಣಿ:
2 "ಸರ್ವೇಶ್ವರನ ವಾರ್ತೆ ಇದು:
ಇಗೋ, ಬಡಗಲಿಂದ ಪ್ರವಾಹ ಹೊರಡುವುದು
ತುಂಬಿತುಳುಕುವ ತೊರೆಯಾಗಿ ಬರುವುದು.
ಆಕ್ರಮಿಸುವುದು ನಾಡನ್ನು, ಅದರಲ್ಲಿರುವ

ಸಮಸ್ತವನ್ನು,
ನಗರವನ್ನು, ಅದರ ನಿವಾಸಿಗಳನ್ನು.
ಆಗ ನಾಡಿನವರೆಲ್ಲರೂ ಮೊರೆಯಿಡುವರು
ದೇಶದವರೆಲ್ಲರು ಗೋಳಾಡುವರು.
3 ಯುದ್ಧ ಕುದುರೆಗಳೋಟದ ಶಬ್ದಕ್ಕೂ
ರಥಗಳ ರಭಸಕ್ಕೂ ಚಕ್ರಗಳ ಚಟಪಟಕ್ಕೂ
ಹೆದರಿ ಜೋಲುಬೀಳುವುವು ಹೆತ್ತವರ ಕೈಗಳು.
ತಮ್ಮ ಮಕ್ಕಳನ್ನೂ ಹಿಂದಿರುಗಿ
ನೋಡದೆ ಹೋಗುವರು.
4 ಆ ದಿನದಲ್ಲಿ ಸೂರೆಯಾಗುವರು
ಫಿಲಿಷ್ಟಿಯರೆಲ್ಲರು
ನಿರ್ಮೂಲವಾಗುವರು ಟೈರ್-ಸಿಡೋನಿನ
ಸಹಾಯಕರಲ್ಲಿ ಅಳಿದುಳಿದವರು.
ಸರ್ವೇಶ್ವರನೆ ನಾಶಮಾಡುವನು
ಕ್ರೇಟ್ ದ್ವೀಪದಿಂದ ಉತ್ಪನ್ನರಾದ
ಫಿಲಿಷ್ಟಿಯರನ್ನು.
5 ಗಾಜಾ ಊರು ತಲೆಬೋಳಿಸಿಕೊಂಡಿದೆ
ಅಷ್ಕೆಲೋನ್ ಊರು ನಿಶ್ಯಬ್ದವಾಗಿದೆ.
ಅನಕಿಮ್ ಬೈಲುನಾಡಿನ ಅವಶೇಷವೇ,
ಎಂದಿನವರೆಗೆ ನಿನ್ನನ್ನೇ ಕತ್ತರಿಸಿಕೊಳ್ಳುತ್ತಿರುವೆ!
6 ಎಲೈ, ಸರ್ವೇಶ್ವರನ ಖಡ್ಗವೇ,
ಇನ್ನೆಷ್ಟರವರೆಗೆ ವಿಶ್ರಾಂತಿಗೊಳ್ಳದಿರುವೆ?
ಓರೆಯಲ್ಲಿ ಅವಿತುಕೊಂಡರು,
ಶಾಂತಿಗೊಳ್ಳು, ಸುಮ್ಮನಿರು.
7 ಆ ಖಡ್ಗ ವಿಶ್ರಾಂತಿಗೊಳ್ಳುವುದು ಹೇಗೆ?
ಅದಕ್ಕೆ ಸರ್ವೇಶ್ವರನೇ
ಆಜ್ಞಾಪಿಸಿದ್ದಾನಲ್ಲವೇ?
ಅಷ್ಕೆಲೋನಿನ ಹಾಗು ಕರಾವಳಿಯವರೆಗೆ
ಅದಕ್ಕೆ ಕೆಲಸ ವಿಧಿಸಿದ್ದಾನಲ್ಲವೆ?"

## ಮೋವಾಬನ್ನು ಕುರಿತ ವಾಣಿ

**48** ಇಸ್ರಯೇಲಿನ ದೇವರೂ ಸೇನಾಧೀಶ್ವರರೂ ಆದ ಸರ್ವೇಶ್ವರ ಮೋವಾಬನ್ನು ಕುರಿತು ಹೀಗೆನ್ನುತ್ತಾರೆ:
"ನೆಬೋ ಊರಿನ ಗತಿಯನ್ನು ಅಯ್ಯೋ,
ಏನೆಂದು ಹೇಳಲಿ, ಅದು ಹಾಳಾಯಿತು.
ಕಿರ್ಯಾತಯಿಮ್ ಮಾನಭಂಗ ಹೊಂದಿದೆ
ಶತ್ರು ಕೈಗೆ ಸಿಕ್ಕಿ.
ಮಿಸ್ಗಾಬ್ ಅವಮಾನಕ್ಕೆ ಗುರಿಯಾಗಿದೆ
ನೆಲಸಮವಾಗಿ.
2 ಮೋವಾಬಿನ ಕೀರ್ತಿ ಮಾಯವಾಯಿತು

ಹೆಷ್ಬೋನ್ ಶತ್ರುಗಳ ಕೈವಶವಾಯಿತು.
'ಮೋವಾಬ್ ಇನ್ನು ರಾಷ್ಟ್ರವೆನಿಸಿಕೊಳ್ಳದಷ್ಟು
ಅದನ್ನು ಹಾಳುಮಾಡೋಣ ಬನ್ನಿ'
ಎಂದಿದ್ದಾರೆ ಆ ಶತ್ರುಗಳು.
ಮದ್ಮೆನೇ, ನೀನೂ ಸುಮ್ಮನಾಗುವೆ,
ಖಡ್ಗ ಬರುವುದು ನಿನ್ನನ್ನು ಬೆನ್ನಟ್ಟಿ.
3 'ಅಯ್ಯೋ, ಸೂರೆಹೋದೆವು, ತೀವ್ರ
ನಾಶವಾದೆವು !'
ಎಂಬ ಕೂಗಾಟ ಕೇಳಿಬರುತ್ತಿದೆ
ಹೊರೊನಯಿಮಿನಿಂದ.
4 "ಮೋವಾಬ್ ನಾಶವಾಯಿತು.
ಅಲ್ಲಿ ದಿಕ್ಕೆಟ್ಟವರು ಮೊರೆಯಿಟ್ಟಿರುವರು.
5 ಅಳುತ್ತಳುತ್ತಾ ಲೂಹೀತ್ ದಿಣ್ಣೆಯನ್ನು
ಹತ್ತುತ್ತಿರುವರು
'ನಾಶವಾದೆವಲ್ಲಾ!' ಎಂಬ ಪ್ರಾಣಸಂಕಟದ
ಪ್ರಲಾಪವು
ಹೊರೊನಯಿಮ್ ಇಳಿಜಾರಿನಲ್ಲಿ
ಕೇಳಿಸುತ್ತಿರುವುದು.
6 'ಅಡವಿಯ ಕಾಡುಕತ್ತೆಯಂತೆ
ಓಡಿಹೋಗಿ ಪ್ರಾಣ ಉಳಿಸಿಕೊಳ್ಳಿ'
ಎನ್ನುತ್ತಿರುವರು.
7 "ಮೋವಾಬೇ,
ನಿನ್ನ ಸಾಧನೆಗಳಲ್ಲೇ, ಧನರಾಶಿಗಳಲ್ಲೇ
ಭರವಸೆಯಿಟ್ಟೆ.
ಆದುದರಿಂದ ನೀನು ಇದೀಗಲೆ ಶತ್ರುಗಳ
ಕೈವಶವಾಗುವೆ.
ಕೆಮೋಷ್ ಎಂಬ ನಿನ್ನ ದೇವತೆಯೂ
ಅದರ ಭಕ್ತ ಯಾಜಕರೂ ಹಾಗೂ
ರಾಜ್ಯಾಧಿಕಾರಿಗಳು
ಸೆರೆಗೆ ಹೋಗುವರು ಒಟ್ಟಿಗೆ.
8 ಸೂರೆಗಾರನು ಪ್ರತಿಯೊಂದು ನಗರದ ಮೇಲೆ
ಬೀಳುವನು.
ಯಾವ ಪಟ್ಟಣವೂ ಉಳಿಯದು.
ಸರ್ವೇಶ್ವರನ ನುಡಿಯಂತೆಯೆ
ಮೇಲ್ನಾಡು ನಾಶವಾಗುವುದು, ಬೈಲ್ನಾಡು
ಹಾಳಾಗುವುದು.
9 ಮೋವಾಬಿಗೆ ರೆಕ್ಕೆ ಕಟ್ಟಿರಿ, ಅದು ಹಾರಿಹೋಗಲಿ
ಅದರ ನಗರಗಳು ಹಾಳುಬಿದ್ದು
ನಿರ್ಜನವಾಗುವುವು.

10 ಸರ್ವೇಶ್ವರನು ನೇಮಿಸಿದ ಕೆಲಸವನ್ನು ನಿರ್ವಹಿಸುವುದರಲ್ಲಿ ಆಲಸ್ಯನಾಗಿರುವವನು ಶಾಪಗ್ರಸ್ತನು. ತನ್ನ ಕತ್ತಿ ರಕ್ತಸುರಿಸದಂತೆ ತಡೆಯುವವನಿಗೆ ಶಾಪ ತಗಲಲಿ!

### ಮೋವಾಬು ನಗರಗಳ ಪರಿವಿನಾಶ

11 ಮೋವಾಬು ಚಿಕ್ಕತನದಿಂದಲೂ ನೆಮ್ಮದಿಯಾಗಿದೆ. ಅದು ಮಡ್ಡಿಯ ಮೇಲೆ ನಿಂತಿರುವ ದ್ರಾಕ್ಷಾರಸದಂತಿದೆ. ಅದನ್ನು ಪಾತ್ರೆಯಿಂದ ಪಾತ್ರೆಗೆ ಯಾರೂ ಹೊಯ್ಯಲಿಲ್ಲ. ಅದು ಎಂದೂ ಸೆರೆಹೋಗಲಿಲ್ಲ. ಆದಕಾರಣ ಅದರ ರುಚಿ ಅದರಲ್ಲಿದೆ. ಅದರ ವಾಸನೆ ಮಾರ್ಪಡಲಿಲ್ಲ.

12 ಹೀಗಿರಲು ಸರ್ವೇಶ್ವರ ಇಂತೆನ್ನುತ್ತಾರೆ: "ಇಗೋ, ದಿನಗಳು ಬರಲಿವೆ, ಆಗ ನಾನು 'ಹೊಯ್ಯತಕ್ಕವರನ್ನು' ಅವರ ಬಳಿಗೆ ಕಳುಹಿಸುವೆನು. ಅವರು ಅದನ್ನು ಹೊಯ್ದುಬಿಡುವರು. ಪಾತ್ರೆಗಳನ್ನು ಬರಿದು ಮಾಡುವರು. ಗಡಿಗೆಗಳನ್ನು ಒಡೆದು ಹಾಕುವರು.
13ಇಸ್ರಯೇಲ್ ವಂಶದವರು ನಂಬಿಕೆ ಇಟ್ಟಿದ್ದ ಬೇತೇಲ್ ಕ್ಷೇತ್ರವನ್ನು ಕುರಿತು ಆಶಾಭಂಗಪಟ್ಟಂತೆ ಆಗ ಮೋವಾಬ್ಯರು ತಮ್ಮ ಕೆಮೋಷ್ ದೇವತೆಯನ್ನು ಕುರಿತು ಆಶಾಭಂಗಪಡುವರು.

14 'ನಾವು ಶೂರರು, ಯುದ್ಧ ಪ್ರವೀಣರು,
ಪರಾಕ್ರಮಿಗಳು'
ಎಂದು ನೀವು ಹೇಳುವುದೆಂತು?
15 ಮೋವಾಬು ಹಾಳಾಗಿದೆ
ಸುಟ್ಟು ಹೋದ ಅದರ ನಗರಗಳಿಂದ ಹೊಗೆ
ಎದ್ದಿದೆ.
ಅದರ ಸರ್ವಶ್ರೇಷ್ಠ ಯುವಕರು
ಹೋಗಿದ್ದಾರೆ ಹತರಾಗುವುದಕ್ಕೆ,
ಸರ್ವಶಕ್ತ ಸರ್ವೇಶ್ವರನೆಂಬ ನಾಮವುಳ್ಳ
ರಾಜಾಧಿರಾಜನ ನುಡಿಯಂತೆ.
16 ಮೋವಾಬಿಗೆ ದುರ್ಗತಿ ಸಮೀಪಿಸಿದೆ
ಅದಕ್ಕೆ ವಿಪತ್ತು ಬೇಗ ಬರಲಿದೆ.
17 ಮೋವಾಬನ ನೆರೆಹೊರೆಯವರೇ,
ಅದರ ಹೆಸರುವಾಸಿಯನ್ನು ಅರಿತವರೇ,
ನೀವೆಲ್ಲರು ಅದಕ್ಕಾಗಿ ಎದೆಬಡಿದುಕೊಳ್ಳಿ !
'ಅಯ್ಯೋ, ಶಕ್ತಿಯುತ ಚೆಂಗೋಲು,
ಮಹಿಮೆಯ ದಂಡಕೋಲು ಮುರಿದು
ಹೋಯಿತಲ್ಲಾ !'
ಎಂದು ಪ್ರಲಾಪಿಸಿರಿ.
18 ಯುವತಿಯೇ, ದೀಬೋನ್ ನಗರಿಯೇ,
ನಿನ್ನ ಮಹಿಮೆಯ ಪದವಿಯಿಂದ
ಕೆಳಕ್ಕಿಳಿದು ಕುಳಿತುಕೊ ಬಾಯಾರಿದವಳಂತೆ.
ಮೋವಾಬನ್ನು ಹಾಳುಮಾಡುವವನು
ನಿನಗೆ ವಿರುದ್ಧವಾಗಿ ಬಂದಿದ್ದಾನೆ.
ನಿನ್ನ ಕೋಟೆಕೊತ್ತಲುಗಳನ್ನು ಅವನು
ಕೆಡವಿದ್ದಾನೆ.
19 ಅರೋಯೇರಿನವರೇ, ದಾರಿ ಮಗ್ಗುಲಲ್ಲಿ
ನಿಂತು ನೋಡಿ !

ಓಡಿ ಹೋಗುವವನನ್ನೂ
ತಪ್ಪಿಸಿಕೊಳ್ಳುವವಳನ್ನೂ
ಏನಾಯಿತೆಂದು ವಿಚಾರಿಸಿರಿ.
20 ಮೋವಾಬು ನಾಶವಾಗಿದೆ, ಅವಮಾನಕ್ಕೆ
ಈಡಾಗಿದೆ.
ಗೋಳಾಡಿರಿ, ಅತ್ತು ಪ್ರಲಾಪಿಸಿರಿ !
ಮೋವಾಬು ಹಾಳಾಯಿತೆಂದು
ಅರ್ನೋನಿನ ತೀರದಲ್ಲೆಲ್ಲಾ ಘೋಷಿಸಿರಿ.

21 ಮೇಲ್ನಾಡಿಗೆ ದಂಡನೆಯಾಗಿದೆ, ಹೋಲೇನ್, ಯಾಚಾ, ಮೇಫಾತ್, ದೀಬೋನ್, ನೆಬೋ,
22ಬೇತ್‌ದಿಬ್ಲಾತಯಿಮ್, 23ಕಿರ್ಯಾತಯಿಮ್, ಬೇತ್‌ಗಾಮೂಲ್, ಬೇತ್‌ಮೆಯೋನ್, ಕೆರೀಯೋತ್,
24ಬೊಚ್ರ, ಹೀಗೆ ದೂರದ ಹತ್ತಿರದ ಮೋವಾಬಿನ ಎಲ್ಲ ನಗರಗಳಿಗೂ ದಂಡನೆಯಾಗಿದೆ. 25ಮೋವಾಬಿನ
ಕೊಂಬು ಕಡಿದು ಬಿದ್ದಿದೆ. ಅದರ ತೋಳು ಮುರಿದುಹೋಗಿದೆ. ಇದು ಸರ್ವೇಶ್ವರನಾದ ನನ್ನ ನುಡಿ.”

**ಮೋವಾಬ್ ತಲೆ ತಗ್ಗಿಸಬೇಕಾಗುವುದು**

26 “ಮೋವಾಬಿಗೆ ಅಮಲೇರುವಷ್ಟು ಕುಡಿಸಿರಿ. ಅದು ಸರ್ವೇಶ್ವರನನ್ನೆ ತಿರಸ್ಕರಿಸಿ ಉಬ್ಬಿಹೋಗಿದೆ.
ತನ್ನ ವಾಂತಿಯಲ್ಲೆ ಬಿದ್ದು ಗೇಲಿ ಪರಿಹಾಸ್ಯಕ್ಕೆ ಗುರಿಯಾಗಲಿದೆ. 27ಮೋವಾಬೇ, ನೀನು ಇಸ್ರಯೇಲನ್ನು
ಕುರಿತು ಗೇಲಿಮಾಡುತ್ತಿದ್ದೆಯಲ್ಲವೆ? ಕಳ್ಳರ ಗುಂಪಿಗೆ ಸೇರಿ ಅದು ಸಿಕ್ಕಿಕೊಂಡಂತೆ ನಿನಗೆ ಕಾಣುತ್ತಿತ್ತೇ?
ಇಸ್ರಯೇಲಿನ ಪ್ರಸ್ತಾಪ ಎತ್ತಿದಾಗಲೆಲ್ಲ ನೀನು ತಲೆಯಾಡಿಸಿ ಹಿಯ್ಯಾಳಿಸುತ್ತಿಯಲ್ಲವೆ?

28 “ಮೋವಾಬ್ಯರೇ, ನಗರಗಳನ್ನು ಬಿಟ್ಟು ಹೋಗಿ ಬಂಡೆಗಳ ಗುಹೆಯಲ್ಲಿ ವಾಸಮಾಡಿ.
ಹಳ್ಳಕೊಳ್ಳಗಳ ಆಚೆಯ ಪಕ್ಕದಲ್ಲಿ ಗೂಡನ್ನು ಕಟ್ಟಿಕೊಳ್ಳುವ ಪಾರಿವಾಳದಂತೆ ಜೀವಿಸಿರಿ. 29ಮೋವಾಬ್ಯರಿಗೆ
ಬಹಳ ಸೊಕ್ಕೇರಿದೆ! ಅವರ ಹೆಮ್ಮೆಯ ಸುದ್ದಿ, ಡಂಭಾಚಾರ, ಅಹಂಕಾರ, ಗರ್ವ, ಸ್ವಪ್ರತಿಷ್ಠೆ ಇವುಗಳ
ಸಮಾಚಾರ ನಮ್ಮ ಕಿವಿಗೆ ಬಿದ್ದಿದೆ. – 30ಸರ್ವೇಶ್ವರನಾದ ನಾನು ಹೇಳುವುದೇನೆಂದರೆ: ಅವರ ಗರ್ವೋದ್ರೇಕ
ನನಗೆ ಗೊತ್ತಿದೆ. ಅದು ಬರೀ ಬುರುಡೆ ಮಾತ್ರ. ಅವರು ಕೊಚ್ಚಿಕೊಳ್ಳುವುದೆಲ್ಲ ನಿರರ್ಥಕವೇ ಸರಿ. 31ಆದ
ಕಾರಣ ನಾನು ಮೋವಾಬಿನ ಬಗ್ಗೆ ವಿಷಾದಿಸುತ್ತೇನೆ. ಹೌದು, ಇಡೀ ನಾಡಿನ ದುರ್ಗತಿಯನ್ನು ನೋಡಿ
ಪ್ರಲಾಪಿಸುತ್ತೇನೆ. ಕೀರ್ ಹೆರೆಸಿನವರ ವಿಷಯದಲ್ಲೂ ನನಗೆ ವ್ಯಥೆ ಇದೆ. 32‘ಸಿಬ್ಮ’ದ ದ್ರಾಕ್ಷಾಲತೆಯೇ,
ಯಜ್ಜೇರಿನ ನಿಮಿತ್ತ ದುಃಖಿಸುವುದಕ್ಕಿಂತಲು ನಿನ್ನನ್ನು ಕಂಡು ಹೆಚ್ಚಾಗಿ ದುಃಖಿಸುತ್ತೇನೆ. ನಿನ್ನ ಶಾಖೆಗಳು
ಸಮುದ್ರದಾಚೆಗೂ ಯಜ್ಜೇರಿನ ಸರೋವರದವರೆಗೂ ವ್ಯಾಪಿಸಿವೆ. ಈಗ ನಿನ್ನ ಹಣ್ಣುಹಂಪಲುಗಳ ಮೇಲೆ
ಹಾಗು ದ್ರಾಕ್ಷಿಯ ಸುಗ್ಗಿಯ ಮೇಲೆ ಸೂರೆಗಾರ ಬಂದೆರಗಿದ್ದಾನೆ. 33ಹರ್ಷಾನಂದಗಳು ತೋಟಗಳಿಂದಲೂ
ಮೋವಾಬಿನ ಇಡೀ ನಾಡಿನಿಂದಲೂ ತೊಲಗಿವೆ. ತೊಟ್ಟಿಗಳಲ್ಲಿ ದ್ರಾಕ್ಷಾರಸ ಇಲ್ಲದಂತಾಗಿದೆ. ಯಾರೂ
ತೊಟ್ಟಿಯಲ್ಲಿ ತುಳಿಯುತ್ತಾ ಆನಂದ ಧ್ವನಿಗೈಯುತ್ತಿಲ್ಲ. ಕೇಳಿಸುವಾ ಧ್ವನಿ ಆನಂದ ಧ್ವನಿ ಅಲ್ಲ.

34 ಹೆಷ್ಬೋನಿನ ಮತ್ತು ಎಲೆಯಾಲೆಯ ಜನರು ಅರಚಿಕೊಳ್ಳುತ್ತಿದ್ದಾರೆ. ಆ ಕೂಗು ಯಹಚಿನವರೆಗೆ
ಕೇಳಿಸುತ್ತಿದೆ. ಚೋಯರಿನಿಂದ ಹೊರೊನಯಿಮಿನವರೆಗೆ ಮತ್ತು ಎಗ್ಲತ್ ಶೆಲೆಶೀಯದವರೆಗೆ ಆ ಕಿರಿಚಾಟ
ಕೇಳಿಸುತ್ತಿದೆ. ನಿಮ್ರೀಮ್ ಹಳ್ಳವೂ ಹಾಳಾಗಿದೆ.

35 “ಮೋವಾಬಿನ ಪೂಜಾಸ್ಥಾನಗಳಲ್ಲಿ ಬಲಿಯರ್ಪಿಸುವುದನ್ನೂ ತಮ್ಮ ದೇವರುಗಳಿಗೆ ಧೂಪಾರತಿ
ಯೆತ್ತುವುದನ್ನೂ ನಿಲ್ಲಿಸುವೆನು. ಇದು ಸರ್ವೇಶ್ವರನಾದ ನನ್ನ ನುಡಿ.

36 “ಆದುದರಿಂದ ಮೋವಾಬಿನ ಮತ್ತು ಕೀರ್ ಹೆರೆಸಿನವರ ನಿಮಿತ್ತ ನನ್ನ ಹೃದಯ ಕೊಳಲಿನಂತೆ
ಮೊರೆಯಿಡುತ್ತದೆ. ಮೋವಾಬ್ಯರು ಕೂಡಿಸಿಟ್ಟ ಹೇರಳವಾದ ಆಸ್ತಿ ಮಾಯವಾಯಿತು. 37ಎಲ್ಲರ
ತಲೆಬೋಲು, ಎಲ್ಲರ ಗಡ್ಡ ವಿಕಾರ, ಎಲ್ಲರ ಕೈ ಗಾಯ. ಎಲ್ಲರ ನಡುವಿಗೆ ಗೋಣಿ ತಟ್ಟು. 38ಮೋವಾಬಿನ
ಎಲ್ಲ ಮಾಳಿಗೆಗಳ ಮೇಲೆಯೂ ಚೌಕಗಳಲ್ಲಿಯೂ ಒಂದೇ ರೋದನ. ಏಕೆಂದರೆ ಯಾರಿಗೂ ಬೇಡದ
ಮಡಕೆಯಂತೆ ಮೋವಾಬನ್ನು ಒಡೆದುಹಾಕಿದ್ದೇನೆ. ಇದು ಸರ್ವೇಶ್ವರನಾದ ನನ್ನ ನುಡಿ. 39ಅದು ಹೇಗೆ

ನುಚ್ಚುನೂರಾಗಿದೆ ! ಆ ಜನರು ಕಿರಿಚಿಕೊಳ್ಳುತ್ತಿದ್ದಾರೆ! ಇಗೋ, ಮೋವಾಬು ನಾಚಿಕೆಯಿಂದ ಬೆನ್ನು ತೋರಿಸಿದೆ. ನೆರೆಹೊರೆಯವರು ಅಣಕಿಸುವುದಕ್ಕೂ ಬೆಚ್ಚಿಬೀಳುವುದಕ್ಕೂ ಆಸ್ಪದ ಆಗಿದೆ."

ಸರ್ವೇಶ್ವರ ಹೀಗೆನ್ನುತ್ತಾರೆ:

40 "ಶತ್ರುವು ಮೋವಾಬಿನ ಮೇಲೆ ಎರಗಲು
ರಣಹದ್ದಿನಂತೆ ರೆಕ್ಕೆಗಳನ್ನು ಹರಡಿ
ಹಾರುವನು.
41 ನಗರಗಳನ್ನು ಹಿಡಿಯುವನು, ಕೋಟೆಗಳನ್ನು
ಆಕ್ರಮಿಸುವನು.
ಆ ದಿನದಂದು, ಹೆರುವ ಹೆಂಗಸಿನ ಎದೆಯಂತೆ
ಅದರುವುದು ಮೋವಾಬಿನ ಶೂರರ ಎದೆ.
42 ಉಬ್ಬಿಕೊಂಡು ಸರ್ವೇಶ್ವರನನ್ನೆ ತಿರಸ್ಕರಿಸಿದ
ಕಾರಣ
ಹಾಳಾಗಿ ಇನ್ನು ರಾಷ್ಟ್ರವೆನಿಸಿಕೊಳ್ಳದು
ಮೋವಾಬ್.
43 ಮೋವಾಬಿನ ನಿವಾಸಿಯೇ, ಕೇಳು
ನಿನಗೆ ಕಾದಿದೆ ಭೀತಿ, ಗುಳಿ, ಉರುಳು!
ಇದು ಸರ್ವೇಶ್ವರನ ನುಡಿ.
44 ಭಯಕ್ಕೆ ಓಡುವವನು ಗುಂಡಿಯಲ್ಲಿ
ಬೀಳುವನು
ಗುಂಡಿಯಿಂದ ಹತ್ತಿ ಬರುವವನು ಬಲೆಗೆ
ಸಿಕ್ಕುವನು.
ದಂಡನೆಯ ವರ್ಷವನ್ನು ಮೋವಾಬಿಗೆ
ಖಂಡಿತ ಬರಮಾಡುವೆನು –
ಇದು ಸರ್ವೇಶ್ವರನ ನುಡಿ.
45 ಪಲಾಯನವಾದವರು ಹೆಷ್ಬೋನಿನ ನೆರಳಲ್ಲಿ
ನಿಂತಿದ್ದಾರೆ ಬಲಗುಂದಿದವರಾಗಿ.
ಆದರೆ ಸೀಹೋನನ ರಾಜ್ಯಕ್ಕೆ ಸೇರಿದ
ಆ ಹೆಷ್ಬೋನಿನಿಂದಲೆ ಹೊರಟಿದೆ ಅಗ್ನಿ.
ಮೋವಾಬಿನ ಮೇರೆಯನ್ನೂ ಶಿಖರವನ್ನೂ
ನುಂಗಿಬಿಟ್ಟಿದೆ ಆ ಬೆಂಕಿ.
46 ಮೋವಾಬ್ಯರೇ, ನಿಮ್ಮ ಗತಿಯೇನೆಂದು
ಹೇಳಲಿ !
ಕೆಮೋಷ್ ದೇವತೆಯ ಭಕ್ತರು ನಾಶವಾದರು.
ನಿಮ್ಮ ಗಂಡುಹೆಣ್ಣು ಮಕ್ಕಳು ಗಡೀಪಾರಾಗಿ
ಸೆರೆಯಾದರು.
47 ಆದರೂ ಬರಲಿರುವಾ ದಿನದಂದು
ತಪ್ಪಿಸುವೆನು ಮೋವಾಬಿನ ದುರವಸ್ಥೆಯನ್ನು
ಎನ್ನುತ್ತಾರೆ ಸರ್ವೇಶ್ವರ.
– ಇತಿ ಮೋವಾಬನ್ನು ಕುರಿತ ತೀರ್ಪು.

## ಅಮ್ಮೋನ್ಯರನ್ನು ಕುರಿತ ತೀರ್ಪು

**49** ಅಮ್ಮೋನ್ಯರನ್ನು ಕುರಿತು ಸರ್ವೇಶ್ವರ ಹೀಗೆನ್ನುತ್ತಾರೆ: "ಇಸ್ರಯೇಲಿಗೆ ಮಕ್ಕಳಿಲ್ಲವೆ? ಅದಕ್ಕೆ ನೆರವಾಗಲು
ನೆಂಟನಿಲ್ಲವೆ? ಮಲ್ಕಾಮ್ ದೇವತೆಯು ಗಾದಿನ ನಾಡನ್ನು ಸ್ವಾಧೀನ ಮಾಡಿಕೊಂಡಿರುವುದೇಕೆ? ಮಲ್ಕಾಮನ
ಪ್ರಜೆಗಳು ಗಾದಿನ ನಗರಗಳಲ್ಲಿ ವಾಸಿಸುತ್ತಿರುವುದೇಕೆ? 2ಆದುದರಿಂದ ಇಗೋ ಕೇಳಿ: ನನ್ನ ಅಪ್ಪಣೆಯ
ಮೇರೆಗೆ ಶತ್ರುಗಳು ರಬ್ಬಾ ಎಂಬ ಅಮ್ಮೋನ್ಯರ ನಗರದ ಮೇಲೆ ಬಿದ್ದು ಯುದ್ಧ ಘೋಷಣೆ ಮಾಡುವ
ದಿನಗಳು ಬರುವುವು. ಆ ನಗರ ಹಾಳುದಿಬ್ಬವಾಗುವುದು. ಅದಕ್ಕೆ ಸೇರಿದ ಗ್ರಾಮಗಳು ಬೆಂಕಿಯಿಂದ ಸುಟ್ಟು
ಹೋಗುವುವು. ಆಗ ಇಸ್ರಯೇಲ್ ತನ್ನನ್ನು ವಶ ಮಾಡಿಕೊಂಡವರನ್ನು ತಾನು ವಶಮಾಡಿಕೊಳ್ಳುವುದು.
ಇದು ಸರ್ವೇಶ್ವರನಾದ ನನ್ನ ನುಡಿ. 3ಹೆಷ್ಬೋನಿನವರೇ, ಅತ್ತುಗೋಳಾಡಿರಿ. ಆಯಿ ಎಂಬ ಊರು
ಹಾಳಾಯಿತು! ರಬ್ಬಾ ನಗರಕ್ಕೆ ಸೇರಿದ ಗ್ರಾಮಗಳವರೇ ಕಿರಿಚಿರಿ, ಗೋಣಿ ತಟ್ಟನ್ನು ಸುತ್ತಿಕೊಳ್ಳಿರಿ. ಅತ್ತು
ಪ್ರಲಾಪಿಸಿರಿ, ಕುರಿ ಹಟ್ಟಿಗಳಲ್ಲಿ ಅತ್ತಿತ್ತ ಓಡಾಡಿರಿ. ಏಕೆಂದರೆ ಮಲ್ಕಾಮ್ ದೇವತೆಯೂ ಅದರ ಯಾಜಕರೂ
ರಾಜ್ಯಾಧಿಕಾರಿಗಳೂ ಒಟ್ಟಾಗಿ ಸೆರೆಗೆ ಹೋಗುವರು. 4"ನನ್ನ ಮೇಲೆ ಯಾರುತಾನೆ ಬಿದ್ದಾರು?' ಎಂದು
ಸ್ವಂತ ಆಸ್ತಿಪಾಸ್ತಿಯಲ್ಲೆ ಭರವಸೆಯಿಟ್ಟ ಭ್ರಷ್ಟನಾಡೇ, "ನನ್ನ ಕಣಿವೆಗಳಲ್ಲಿ ನೀರು ತುಂಬಿಹರಿಯುತ್ತಿದೆ' ಎಂದು
ಏಕೆ ಕೊಚ್ಚಿಕೊಳ್ಳುತ್ತಿರುವೆ? 5ಸೇನಾಧೀಶ್ವರ ಸರ್ವೇಶ್ವರನೆಂಬ ದೇವರು ಹೇಳುವುದನ್ನು ಕೇಳು – ನಿನ್ನ
ನೆರೆಹೊರೆಯವರೆಲ್ಲರು ನಿನಗೆ ಭಯಾಸ್ಪದವಾಗುವಂತೆ ಮಾಡುವೆನು. ನಿನ್ನವರಲ್ಲಿ ಪ್ರತಿಯೊಬ್ಬನನ್ನು
ನಿಂತಲ್ಲಿಂದಲೆ ಅಟ್ಟಲಾಗುವುದು. ಚದರಿ ಹೋದವರನ್ನು ಕೂಡಿಸಲು ಯಾರೂ ಇಲ್ಲದಂತಾಗುವುದು.
6ಆದರೂ ಕಾಲಾಂತರದಲ್ಲಿ ಅಮ್ಮೋನ್ಯರ ದುರವಸ್ಥೆಯನ್ನು ನೀಗಿಸುವೆನು. ಇದು ಸರ್ವೇಶ್ವರನಾದ ನನ್ನ
ನುಡಿ."

## ಎದೋಮನ್ನು ಕುರಿತ ತೀರ್ಪು

7 ಎದೋಮನ್ನು ಕುರಿತು ಸೇನಾಧೀಶ್ವರ ಸರ್ವೇಶ್ವರ ಹೀಗೆನ್ನುತ್ತಾರೆ: "ತೇಮಾನ್ ನಾಡಿಗಿದ್ದ ಬುದ್ಧಿ
ಏನಾಯಿತು? ವಿವೇಕಿಗಳಿಗಿದ್ದ ಆಲೋಚನಾಶಕ್ತಿ ಅಳಿದುಹೋಯಿತೋ? ಅವರ ಜ್ಞಾನ
ಮಾಯವಾಯಿತೋ? 8ದೇದಾನಿನವರೇ, ಹಿಂದಿರುಗಿ ಓಡಿಹೋಗಿರಿ. ಒಳ ಪ್ರಾಂತ್ಯವನ್ನು ಸೇರಿ ವಾಸಿಸಿರಿ.
ಏಕೆಂದರೆ ನಾನು ಎದೋಮನ್ನು ದಂಡಿಸುವೆನು. ಏಸಾವನಿಗೆ ವಿಧಿಸಿದ್ದ ಆಪತ್ತನ್ನು ಅದರ ಮೇಲೆ
ಬರಮಾಡುವೆನು. 9ದ್ರಾಕ್ಷೆಯ ಹಣ್ಣನ್ನು ಕೀಳುವವರು ನಿನ್ನಲ್ಲಿಗೆ ಬಂದಿದ್ದರೆ ಹಕ್ಕಲನ್ನಾದರೂ
ಉಳಿಸುತ್ತಿದ್ದರವಲ್ಲವೆ? ಕಳ್ಳರು ರಾತ್ರಿ ವೇಳೆಯಲ್ಲಿ ಮನೆಗೆ ನುಗ್ಗಿದರೆ ತಮಗೆ ಸಾಕಾಗುವಷ್ಟನ್ನು ಮಾತ್ರ
ಕೊಳ್ಳೆಹೊಡೆಯುತ್ತಿದ್ದರಲ್ಲವೆ? 10ಆದರೆ ನಾನು ಏಸಾವನ್ನು ಬರೀ ಮೈಯಾಗಿಸಿಬಿಟ್ಟಿದ್ದೇನೆ. ಅವನ
ಗುಪ್ತಸ್ಥಳಗಳನ್ನು ಬಟ್ಟಬೈಲಾಗಿಸಿಬಿಟ್ಟಿದ್ದೇನೆ. ಅವಿತು ಕೊಳ್ಳಲಾಗದು. ಅವನ ಸಂತಾನದವರು, ಸಹೋದರರು
ಹಾಗು ನೆರೆಹೊರೆಯವರು ಹಾಳಾದರು. ಅವನೂ ಇಲ್ಲವಾದನು. 11ನೀನು ನಿನ್ನ ಅನಾಥರನ್ನು ನನಗೆ ಬಿಡು.
ನಾನೇ ಅವರನ್ನು ನೋಡಿಕೊಳ್ಳುತ್ತೇನೆ. ನಿನ್ನ ವಿಧವೆಯರು ನನ್ನಲ್ಲಿ ಭರವಸೆ ಇಡಲಿ."

12 ಸರ್ವೇಶ್ವರ ಇಂತೆನ್ನುತ್ತಾರೆ: "ಕಷ್ಟವೆಂಬ ಕೊಡದಿಂದ ಕುಡಿಸಲು ಯಾರ ಪಾಲಿಗೆ ಬರಲಿಲ್ಲವೋ
ಅಂಥವರೇ ಕುಡಿಯಬೇಕಾಗಿರುವಲ್ಲಿ ನೀನು ಅದರಿಂದ ತಪ್ಪಿಸಿಕೊಳ್ಳುವೆಯಾ? ಇಲ್ಲ, ಅದು ಸಾಧ್ಯವಿಲ್ಲ,
ನೀನು ಕುಡಿದೇ ತೀರಬೇಕು. 13ಬೊಚ್ರ ನಗರವು ಪಾಳುಬೀಳುವುದು. ಜನರು ಅದನ್ನು ನೋಡಿ
ಬೆಚ್ಚಿಬೀಳುವರು. ಅದು ಶಾಪಕ್ಕೂ ನಿಂದೆ ಪರಿಹಾಸ್ಯಕ್ಕೂ ಗುರಿಯಾಗುವುದು. ಅದಕ್ಕೆ ಸೇರಿದ ಊರುಗಳೆಲ್ಲ
ನಿತ್ಯನಾಶ ಹೊಂದುವುವು. ಇದನ್ನು ಆಣೆಯಿಟ್ಟು ಹೇಳಿದ್ದೇನೆ. ಇದು ಸರ್ವೇಶ್ವರನಾದ ನನ್ನ ನುಡಿ.

14 "ಎದೋಮೇ, ಸರ್ವೇಶ್ವರನಿಂದ ಬಂದ ಸಮಾಚಾರವನ್ನು ಕೇಳಿದ್ದೇನೆ. 'ನೀವು ಒಟ್ಟಿಗೆ ಸೇರಿ
ಯುದ್ಧಕ್ಕೆ ಹೊರಟು, ಎದೋಮಿನ ಮೇಲೆ ದಾಳಿಮಾಡಿರಿ' ಎಂದು ಸೇವಕನ ಮೂಲಕ ರಾಷ್ಟ್ರಗಳಿಗೆ ಹೀಗೆ
ಹೇಳಿಕಳುಹಿಸಿದ್ದಾರೆ. 15'ಇದೋ, ರಾಷ್ಟ್ರಗಳಲ್ಲಿ ನಿನ್ನನ್ನು ಕನಿಷ್ಟವಾಗಿಸುವೆನು. ಜನರ ತಾತ್ಸಾರಕ್ಕೆ ನಿನ್ನನ್ನು
ಈಡಾಗಿಸುವೆನು. 16ಪರ್ವತಾಗ್ರಗಳಲ್ಲಿ ನೆಲೆಗೊಂಡ ಜನತೆಯೇ, ಬಂಡೆಯ ಬಿರುಕುಗಳಲ್ಲಿ ವಾಸಿಸುವ
ಜನತೆಯೇ, ನಿನ್ನ ಭೀಕರತ್ವವೆಲ್ಲಿ? ನಿನ್ನೆದೆಯ ಗರ್ವ ನಿನ್ನನ್ನು ಮೋಸಗೊಳಿಸಿದೆ. ಹದ್ದಿನಂತೆ ನೀನು ಉನ್ನತ

ಸ್ಥಾನದಲ್ಲಿ ಗೂಡನ್ನು ಕಟ್ಟಿಕೊಂಡರೂ ನಿನ್ನನ್ನು ಅಲ್ಲಿಂದ ಇಳಿಸಿಬಿಡುವೆನು. ಇದು ನನ್ನ ನುಡಿ," ಎನ್ನುತ್ತಾರೆ ಸರ್ವೇಶ್ವರ.

17 "ಎದೋಮಿಗೆ ವಿಪತ್ತುಗಳು ಬಂದೊದಗುವುವು. ಅದನ್ನು ನೋಡುವವರು ಬೆರಗುಗೊಳ್ಳುವರು. ಹಾದು ಹೋಗುವವರೆಲ್ಲರು ಸಿಳ್ಳು ಹಾಕಿ ಪರಿಹಾಸ್ಯ ಮಾಡುವರು. 18ಕೆಡುವಲಾದ ಸೊದೋಮ್, ಗೊಮೋರ ನಗರಗಳಲ್ಲೂ ಸುತ್ತಣ ಊರುಗಳಲ್ಲೂ ಆದಂತೆಯೇ ಎದೋಮಿನಲ್ಲೂ ಆಗುವುದು. ಅಲ್ಲಿ ಯಾರೂ ವಾಸಿಸರು, ಯಾವ ನರಪ್ರಾಣಿಯೂ ನೆಲಸದು.

19 "ಎದೋಮ್ಯರಿಗೆ ನಿತ್ಯ ನೆಲೆಯಾದ ಗೋಮಾಳಕ್ಕೆ ಇದೋ ಜೋರ್ಡನ್ ದಟ್ಟಡವಿಯಿಂದ ಸಿಂಹದೋಪಾದಿ ಏರಿಬರುವೆನು. ಕ್ಷಣಮಾತ್ರದಲ್ಲಿ ಅವರನ್ನು ಅಲ್ಲಿಂದ ಓಡಿಸಿಬಿಡುವೆನು. ಅದನ್ನು ಪಾಲಿಸುವುದಕ್ಕೆ ನಾನು ಆರಿಸಿಕೊಂಡವನನ್ನೇ ನೇಮಿಸುವೆನು. ನನಗೆ ಸಮಾನನು ಯಾರು? ನ್ಯಾಯ ವಿಚಾರಣೆಗೆ ನನ್ನನ್ನು ಎಳೆಯುವಂಥ ವ್ಯಕ್ತಿ ಯಾರು? ಮಂದೆಯನ್ನು ಕಾಯುವ ಯಾವನು ತಾನೆ ನನ್ನೆದುರಿಗೆ ನಿಲ್ಲಬಲ್ಲನು? 20ಹೀಗಿರಲು, ಸರ್ವೇಶ್ವರನಾದ ನಾನು, ಎದೋಮಿನ ವಿಷಯವಾಗಿ ಮಾಡಿಕೊಂಡಿರುವ ಆಲೋಚನೆಯನ್ನೂ ತೇಮಾನ್ಯರನ್ನು ಕುರಿತು ಸಂಕಲ್ಪಿಸಿರುವ ಉದ್ದೇಶವನ್ನೂ ಆಲಿಸಿರಿ: ಕಾಡು ಮೃಗಗಳು ಹಿಂಡಿನ ಮರಿಗಳನ್ನು ಖಂಡಿತವಾಗಿ ಎಳೆದುಕೊಂಡು ಹೋಗುವುವು. ಅವುಗಳ ನಾಶಕ್ಕಾಗಿ ಹುಲ್ಲುಗಾವಲು ನಿಶ್ಚಯವಾಗಿ ಕಳವಳ ಪಡುವುದು. 21ಎದೋಮ್ಯರು ತಟ್ಟನೆ ಬೀಳುವರು, ಭೂಮಿ ಕಂಪಿಸುವುದು. ಆಗ ಉಂಟಾಗುವ ಗೋಳು ಕೆಂಪು ಸಮುದ್ರದವರೆಗೂ ಕೇಳಿಸುವುದು. 22ಶತ್ರುವು ಬೊಚ್ರದ ಮೇಲೆ ಎರಗಲು ರಣಹದ್ದಿನಂತೆ ರೆಕ್ಕೆಗಳನ್ನು ಹರಡಿ ಹಾರಿ ಏರುವನು. ಆ ದಿನದಂದು ಎದೋಮಿನ ಶೂರರ ಎದೆ ಹೆರುವ ಹೆಂಗಸಿನ ಎದೆಯಂತೆ ಅದರುವುದು.

## ದಮಸ್ಕಸನ್ನು ಕುರಿತ ತೀರ್ಪು

23 ದಮಸ್ಕಸ್ ಅನ್ನು ಕುರಿತು ಸರ್ವೇಶ್ವರ ಹೀಗೆನ್ನುತ್ತಾರೆ: "ಹಮಾತ್ ಮತ್ತು ಅರ್ಪಾದ್ ನಗರಗಳು ಆಶಾಭಂಗಗೊಂಡಿವೆ. ಅಶುಭ ಸಮಾಚಾರವನ್ನು ಕೇಳಿ ಕರಗಿಹೋಗಿವೆ. ಸಮುದ್ರದಂತೆ ಅವು ತಲ್ಲಣಗೊಂಡು ಅಶಾಂತವಾಗಿವೆ. 24ದಮಸ್ಕಸ್ ಕುಂದಿದೆ, ಓಡಿಹೋಗಲು ಸಿದ್ಧವಿದೆ. ಅದಕ್ಕೆ ನಡುಕ ಹುಟ್ಟಿದೆ. ಪ್ರಸವ ವೇದನೆಗೆ, ಕಷ್ಟ ಸಂಕಟಕ್ಕೆ ಅದು ಒಳಗಾಗಿದೆ. 25ಅಕಟಾ, ಹೆಸರುವಾಸಿಯಾದಂಥ ಆ ನನ್ನ ಮೆಚ್ಚುಗೆಯ ನಗರ ವಲಸೆ ಹೋಗಲಿಲ್ಲವೇಕೆ! 26ಅದರ ದುರ್ಗತಿಯ ದಿನದಂದು ಅಲ್ಲಿನ ಯುವಕರು ಚೌಕಗಳಲ್ಲಿ ಬಿದ್ದು ಸಾಯುವರು, ಯುದ್ಧ ವೀರರೆಲ್ಲರು ಸುಮ್ಮನಿರುವರು. 27ಆಗ ದಮಸ್ಕದ ಕೋಟೆಯಲ್ಲಿ ಬೆಂಕಿ ಹೊತ್ತಿಸುವೆನು. ಅದು ಬೆನ್‍ಹದದನ ಅರಮನೆಗಳನ್ನು ದಹಿಸಿ ಬಿಡುವುದು. ಇದು ಸರ್ವಶಕ್ತ ಸರ್ವೇಶ್ವರನಾದ ನನ್ನ ನುಡಿ."

## ಅರೇಬಿಯ ರಾಷ್ಟ್ರಗಳನ್ನು ಕುರಿತ ತೀರ್ಪು

28 ಬಾಬಿಲೋನಿನ ಅರಸನಾದ ನೆಬೂಕದ್ನೆಚ್ಚರನು ಸೋಲಿಸಿದ ಕೇದಾರನ್ನು ಮತ್ತು ಹಾಚೋರಿನ ರಾಷ್ಟ್ರಗಳನ್ನು ಕುರಿತ ಹೇಳಿಕೆ:

"ಏಳಿ, ಕೇದಾರಿಗೆ ಹೋಗಿ, ಪೂರ್ವ ದೇಶದವರನ್ನು ಹಾಳುಮಾಡಿ," ಎಂದು ಸರ್ವೇಶ್ವರಸ್ವಾಮಿ ಶತ್ರುಗಳಿಗೆ ಆಜ್ಞೆಮಾಡಿದ್ದಾರೆ. 29ಶತ್ರುಗಳು ಅವರ ಗುಡಾರಗಳನ್ನೂ ಹಿಂಡುಗಳನ್ನೂ ಅಪಹರಿಸಿಕೊಳ್ಳುವರು. ಅವರ ಗುಡಾರದ ಪರದೆಗಳನ್ನೂ ಸಮಸ್ತ ಸಾಮಗ್ರಿಗಳನ್ನೂ ತೆಗೆದುಕೊಂಡು ಹೋಗುವರು. ದಿಗಿಲು ನಿಮ್ಮ ಸುತ್ತ ಮುತ್ತಲು ಆವರಿಸಿದೆ ಎಂದು ಅವರಿಗೆ ಕೂಗಿ ಹೇಳುವರು.

30 ಸರ್ವೇಶ್ವರ ಹೀಗೆನ್ನುತ್ತಾರೆ: "ಹಾಚೋರಿನವರೇ, ಓಡಿಹೋಗಿ. ದೂರ ಹೋಗಿ, ಒಳಪ್ರಾಂತ್ಯಗಳಲ್ಲಿ ಅವಿತುಕೊಳ್ಳಿ. ಏಕೆಂದರೆ ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ನಿಮಗೆ ಕೇಡನ್ನು ಮಾಡಬೇಕೆಂದಿದ್ದಾನೆ. ನಿಮ್ಮ ವಿನಾಶಕ್ಕೆ ಉಪಾಯವನ್ನು ಹೂಡಿದ್ದಾನೆ. 'ಬಾಬಿಲೋನಿನವರೇ, ಏಳಿ! ನೆಮ್ಮದಿಯಿಂದ, ನಿರ್ಭಯವಾಗಿ ಪ್ರತ್ಯೇಕ ವಾಸಿಸುವ ಆ ರಾಷ್ಟ್ರದ ಮೇಲೆ ದಾಳಿಮಾಡಿ. 31ಅದಕ್ಕೆ ಬಾಗಿಲೂ ಇಲ್ಲ, ಬೀಗವೂ ಇಲ್ಲ' ಎನ್ನುತ್ತಿದ್ದಾನೆ. 32ಅವರ ಒಂಟೆಗಳು ಕೊಳ್ಳೆಯಾಗುವುವು. ಅವರ ಲೆಕ್ಕವಿಲ್ಲದ

ದನಕುರಿಗಳು ಸೂರೆಹೋಗುವುವು. ಮುಂದಲೆಗೂದಲು ಕತ್ತರಿಸಿಕೊಳ್ಳುವ ಆ ಜನರನ್ನು ಎಲ್ಲ ಕಡೆಯ ಗಾಳಿಗೂ ತೂರುವೆನು. ಎಲ್ಲ ಕಡೆಯಿಂದಲು ವಿಪತ್ತನ್ನು ಅವರ ಮೇಲೆ ಬರಮಾಡುವೆನು. 33ಆಗ ಹಾಜೋರು ಸದಾ ಹಾಳುಬಿದ್ದು ನರಿಗಳಿಗೆ ಬೀಡಾಗುವುದು. ಅಲ್ಲಿ ಯಾರೂ ವಾಸಿಸರು, ಯಾವ ನರಪ್ರಾಣಿಯೂ ತಂಗದು. ಇದು ಸರ್ವೇಶ್ವರನಾದ ನನ್ನ ನುಡಿ."

### ಏಲಾಮನ್ನು ಕುರಿತ ತೀರ್ಪು

34 ಜುದೇಯದ ಅರಸನಾದ ಚಿದ್ಕೀಯನ ಆಳ್ವಿಕೆಯ ಆರಂಭದಲ್ಲಿ ಏಲಾಮಿನ ವಿಷಯವಾದ ಈ ವಾಕ್ಯವನ್ನು ಪ್ರವಾದಿ ಯೆರೆಮೀಯನಿಗೆ ನೀಡಲಾಯಿತು: 35ಸೇನಾಧೀಶ್ವರ ಸರ್ವೇಶ್ವರ ಹೀಗೆಂದರು – "ಇಗೋ, ಏಲಾಮಿನ ಮುಖ್ಯ ಬಲವಾದ ಬಿಲ್ಲನ್ನು ಮುರಿದುಬಿಡುವೆನು. 36ನಾಲ್ಕು ದಿಕ್ಕುಗಳಿಂದಲೂ ನಾಲ್ಕು ಗಾಳಿಗಳನ್ನು ಏಲಾಮ್ಯರ ಮೇಲೆ ಬರಮಾಡಿ ಅವರನ್ನು ಆಯಾ ಗಾಳಿಗೆ ತೂರಿಬಿಡುವೆನು. ಏಲಾಮಿನಿಂದ ದೇಶ ಭ್ರಷ್ಟರಾದವರು ಆಶ್ರಯ ಹುಡುಕದ ರಾಜ್ಯವೇ ಇರದು. 37ತಮ್ಮ ಪ್ರಾಣ ಹುಡುಕುವ ಶತ್ರುಗಳ ಮುಂದೆ ಆ ಏಲಾಮ್ಯರು ನಡುಗುವಂತೆ ಮಾಡುವೆನು. ನನ್ನ ಕೋಪಾಗ್ನಿಯ ಬಿಸಿ ಅವರಿಗೆ ತಟ್ಟುವಂತೆ ಮಾಡುವೆನು. ಇದು ಸರ್ವೇಶ್ವರನಾದ ನನ್ನ ನುಡಿ. ಅವರು ನಿರ್ಮೂಲವಾಗುವ ತನಕ ಅವರ ಹಿಂದೆಯೇ ಖಡ್ಗವನ್ನು ಕಳುಹಿಸುವೆನು. 38ನನ್ನ ಸಿಂಹಾಸನವನ್ನು ಏಲಾಮಿನಲ್ಲಿ ಸ್ಥಾಪಿಸಿ ಆ ನಾಡಿನ ಅರಸನನ್ನೂ ಅಧಿಕಾರಿಗಳನ್ನೂ ಅಳಿಸಿ ಬಿಡುವೆನು. 39ಇದು ಸರ್ವೇಶ್ವರನಾದ ನನ್ನ ನುಡಿ. ಆದರೂ ಕಟ್ಟಕಡೆಯಲ್ಲಿ ಏಲಾಮಿನ ದುರವಸ್ಥೆಯನ್ನು ನೀಗಿಸುವೆನು. ಇದು ಸರ್ವೇಶ್ವರನಾದ ನನ್ನ ನುಡಿ."

### ಬಾಬಿಲೋನನನ್ನು ಕುರಿತ ತೀರ್ಪು

**50** ಬಾಬಿಲೋನಿಯರ ದೇಶವಾದ ಬಾಬಿಲೋನಿಯದ ಕುರಿತು ಪ್ರವಾದಿ ಯೆರೆಮೀಯನಿಂದ ಸರ್ವೇಶ್ವರಸ್ವಾಮಿ ನುಡಿಸಿದ ವಾಕ್ಯ ಇದು:

2"ರಾಷ್ಟ್ರಗಳಲ್ಲಿ ಪ್ರಚುರಪಡಿಸಿರಿ, ಧ್ವಜವೆತ್ತಿ ಪ್ರಕಟಿಸಿರಿ, ಮುಚ್ಚುಮರೆಯಿಲ್ಲದೆ ಹೀಗೆಂದು ಸಾರಿರಿ: 'ಬಾಬಿಲೋನ್ ಶತ್ರುವಶವಾಯಿತು. ಬೇಲ್ ದೇವತೆ ನಾಚಿಕೆಗೊಂಡಿದೆ. ಮೆರೋದಾಕ್ ದೇವತೆ ಬೆಚ್ಚಿಬಿದ್ದಿದೆ. ಅದರ ಮೂರ್ತಿಗಳು ಅವಮಾನಕ್ಕೆ ಗುರಿಯಾಗಿವೆ. ಅದರ ಬೊಂಬೆಗಳು ಚೂರುಚೂರಾಗಿವೆ.

3 "ಉತ್ತರದಿಂದ ಒಂದು ರಾಷ್ಟ್ರ ಬಾಬಿಲೋನಿನ ವಿರುದ್ಧ ಬರುತ್ತಿದೆ ಅದು ಬಾಬಿಲೋನ್ ದೇಶವನ್ನು ಹಾಳುಮಾಡುವುದು. ಅಲ್ಲಿ ಯಾರೂ ವಾಸಿಸರು. ಜಾನುವಾರುಗಳೂ ಜನರೂ ಓಡಿಹೋಗಿದ್ದಾರೆ, ತೊಲಗಿಬಿಟ್ಟಿದ್ದಾರೆ."

### ಇಸ್ರಯೇಲಿನ ದಾಸ್ಯದ ಮುಗಿವು

4 ಸರ್ವೇಶ್ವರ ಹೀಗೆನ್ನುತ್ತಾರೆ: "ಆ ದಿನಗಳಲ್ಲಿ, ಆ ಕಾಲದಲ್ಲಿ ಇಸ್ರಯೇಲರೂ ಯೆಹೂದ್ಯರೂ ಒಟ್ಟಿಗೆ ಹಿಂದಿರುಗಿ ಬರುವರು. ದಾರಿ ಯುದ್ದಕ್ಕೂ ಅಳುತ್ತಾ ಬಂದು ತಮ್ಮ ದೇವರಾದ ಸರ್ವೇಶ್ವರನನ್ನು ಮರೆಹೋಗುವರು. 5ಸಿಯೋನಿಗೆ ಅಭಿಮುಖರಾಗಿ, ಮಾರ್ಗವನ್ನು ವಿಚಾರಿಸುತ್ತಾ, 'ಬನ್ನಿ, ಸರ್ವೇಶ್ವರನನ್ನು ಆಶ್ರಯಿಸಿ, ಎಂದಿಗೂ ಮರೆಯಲಾಗದ ಶಾಶ್ವತ ಒಡಂಬಡಿಕೆಯನ್ನು ಅವರೊಂದಿಗೆ ಮಾಡಿಕೊಳ್ಳೋಣ' ಎಂದು ಹೇಳುವರು.

6 "ನನ್ನ ಜನರು ದಾರಿತಪ್ಪಿದ ಕುರಿಗಳು. ಕುರಿಗಾಹಿಗಳು ಅವರನ್ನು ದಾರಿ ತಪ್ಪಿಸಿ ಪರ್ವತಗಳಲ್ಲಿ ಅಲೆದಾಡಿಸಿದ್ದಾರೆ. ನನ್ನ ಜನರು ತಮ್ಮ ಬೀಡುಗಳನ್ನು ಮರೆತು ಬೆಟ್ಟ ಗುಡ್ಡಗಳಲ್ಲಿ ತಿರುಗಾಡುತ್ತಿದ್ದಾರೆ. 7ಕಂಡಕಂಡವರೆಲ್ಲರು ಅವರನ್ನು ಕಬಳಿಸಿದ್ದಾರೆ. ಅವರ ವಿರೋಧಿಗಳು, 'ನಾವು ಅವರನ್ನು ಕಬಳಿಸಿದ್ದು ದೋಷವಲ್ಲ, ಏಕೆಂದರೆ, ಸತ್ಯಸ್ವರೂಪರಾದ ಸರ್ವೇಶ್ವರನಿಗೆ, ತಮ್ಮ ಪೂರ್ವಜರ ನಂಬಿಕೆ ನಿರೀಕ್ಷೆಯಾದ ಸರ್ವೇಶ್ವರನಿಗೆ ವಿರುದ್ಧ ಅವರು ಪಾಪಮಾಡಿದ್ದಾರೆ,' ಎಂದುಕೊಂಡರು.

8 “ಬಾಬಿಲೋನ್ ದೇಶದಿಂದ ಓಡಿಹೋಗಿ. ಬಾಬಿಲೋನಿಯರ ಆ ಸೀಮೆಯಿಂದ ಹೊರಡಿ. ಹಿಂಡುಗಳ ಮುಂದೆ ನಡೆಯುವ ಹೋತಗಳಂತೆ ಮುಂತೆರಳಿರಿ. 9ಇಗೋ, ದೊಡ್ಡ ರಾಷ್ಟ್ರಗಳ ಸಮೂಹವನ್ನು ಎಬ್ಬಿಸಿ ಉತ್ತರದಿಂದ ಬಾಬಿಲೋನಿಯದ ಮೇಲೆ ಬೀಳಮಾಡುವೆನು. ಅವು ಬಾಬಿಲೋನಿಗೆ ವಿರುದ್ಧ, ವ್ಯೂಹಕಟ್ಟಿ ಅದನ್ನು ಬುಡಮೇಲು ಮಾಡುವುವು. ಅವುಗಳು ಪ್ರಯೋಗಿಸುವ ಬಾಣಗಳು ಯುದ್ಧ ಪ್ರವೀಣ ಶೂರನಂತಿರುವುವು; ಅವು ಸುಮ್ಮನೆ ಹಿಂದಿರುಗವು. 10ಬಾಬಿಲೋನಿಯದ ರಾಜ್ಯ ಸೂರೆಯಾಗುವುದು. ಅದನ್ನು ಕೊಳ್ಳೆಹೊಡೆಯುವವರೆಲ್ಲರು ಸಂತೃಪ್ತಿಗೊಳ್ಳುವರು. ಇದು ಸರ್ವೇಶ್ವರನಾದ ನನ್ನ ನುಡಿ.”

**ಬಾಬಿಲೋನಿಯದ ಪತನ**

11 “ನನ್ನ ಸೊತ್ತಾದವರನ್ನು ಕೊಳ್ಳೆ ಹೊಡೆಯುವವರೇ, ನೀವು ಹರ್ಷಿಸಿ ಉಲ್ಲಾಸಿಸುತ್ತಿದ್ದೀರಿ! ಕಣ ತುಳಿಯುವ ಕಡಸಿನ ಹಾಗೆ ಕುಣಿದಾಡುತ್ತಿದ್ದೀರಿ. ಕೊಬ್ಬಿದ ಕುದುರೆಗಳಂತೆ ಕೆನೆಯುತ್ತಿದ್ದೀರಿ. 12ಆದರೆ ನಿಮ್ಮ ಮಾತೃಭೂಮಿ ಮಾನಭಂಗಕ್ಕೆ ಈಡಾಗುವುದು. ನಿಮ್ಮನ್ನು ಹೆತ್ತ ರಾಜ್ಯ ನಾಚಿಕೊಳ್ಳುವುದು. ಹೌದು, ಅದು ಕಾಡಾಗುವುದು. ಕಗ್ಗಾಡು, ಬೆಂಗಾಡು ಆಗುವುದು. ರಾಷ್ಟ್ರಗಳಲ್ಲಿ ಅದು ಕನಿಷ್ಠವಾಗುವುದು. 13ಸರ್ವೇಶ್ವರನ ಕೋಪದ ನಿಮಿತ್ತ ಅದು ನಿರ್ಜನವಾಗುವುದು. ಪೂರ್ತಿಯಾಗಿ ಅದು ಪಾಳುಬೀಳುವುದು. ಬಾಬಿಲೋನನ್ನು ಹಾದು ಹೋಗುವವರೆಲ್ಲರು ಅದಕ್ಕೆ ಬಂದೊದಗಿದ ವಿಪತ್ತುಗಳನ್ನು ಕಂಡು ನಿಬ್ಬೆರಗಾಗುವರು, ಸಿಳ್ಳುಹಾಕಿ ಮೂದಲಿಸುವರು.

14 “ಬಿಲ್ಲುಗಾರರೇ, ನೀವೆಲ್ಲರು ವ್ಯೂಹಕಟ್ಟಿ ಬಾಬಿಲೋನಿಗೆ ಮುತ್ತಿಗೆಹಾಕಿರಿ. ಬಾಣಗಳನ್ನು ಮಿಗಿಸದೆ ಎಸೆಯಿರಿ. ಅದು ಸರ್ವೇಶ್ವರನಿಗೆ ವಿರುದ್ಧ ಪಾಪಮಾಡಿದೆ. 15ಅದರ ಸುತ್ತಲು ರಣಘೋಷಮಾಡಿರಿ. ಇಗೋ, ಅದು ಶರಣಾಗತವಾಯಿತು! ಅದರ ಕೋಟೆಕೊತ್ತಲಗಳು ಬಿದ್ದವು. ಅದರ ಪೌಳಿಗೋಡೆಯನ್ನು ಕೆಡವಲಾಯಿತು. ಸರ್ವೇಶ್ವರನಾದ ನಾನು ಅದಕ್ಕೆ ಮುಯ್ಯಿತೀರಿಸಿದ್ದೇನೆ. ನೀವೂ ಮುಯ್ಯಿತೀರಿಸಿರಿ. ಅದು ಮಾಡಿದಂತೆಯೇ ಅದಕ್ಕೆ ಮಾಡಿ. 16ಬೀಜ ಬಿತ್ತುವವನಾಗಲಿ, ಸುಗ್ಗಿಯಲ್ಲಿ ಕುಡುಗೋಲು ಹಿಡಿಯುವವನಾಗಲಿ ಆ ಬಾಬಿಲೋನಿನಲ್ಲಿ ಇಲ್ಲದಂತೆ ಮಾಡಿ. ಪ್ರತಿಯೊಬ್ಬ ವಿದೇಶಿಯನು ಹತ್ಯಮಾಡುವ ಆ ಖಡ್ಗದ ಮುಂದೆ ನಿಲ್ಲಲಾಗದೆ ಸ್ವಜನರ ಕಡೆಗೆ ತಿರುಗಿಕೊಂಡು ಸ್ವದೇಶಕ್ಕೆ ಓಡಿ ಹೋಗುವನು.

**ಇಸ್ರಯೇಲ್ ಹಿಂತಿರುಗಲಿದೆ**

17 “ಇಸ್ರಯೇಲ್ ಚದರಿಹೋದ ಮುಂದೆ. ಸಿಂಹಗಳು ಅದನ್ನು ಓಡಿಸಿಬಿಟ್ಟಿವೆ. ಮೊಟ್ಟ ಮೊದಲು ಅಸ್ಸೀರಿಯಾದ ಅರಸನು ಅದನ್ನು ಕಬಳಿಸಿದನು. ಕಟ್ಟಕಡೆಗೆ ಬಾಬಿಲೋನಿನ ಅರಸ ನೆಬೂಕದ್ನೆಚ್ಚರನು ಅದರ ಎಲುಬುಗಳನ್ನು ಕಡಿದುಬಿಟ್ಟನು. 18ಹೀಗಿರಲು, ಇಸ್ರಯೇಲಿನ ದೇವರೂ ಸೇನಾಧೀಶ್ವರನೂ ಸರ್ವೇಶ್ವರನೂ ಆದ ನಾನು ಹೇಳುವುದು ಇದು: ಅಸ್ಸೀರಿಯಾದ ಅರಸನನ್ನು ನಾನು ದಂಡಿಸಿದಂತೆ ಬಾಬಿಲೋನಿನ ಅರಸನನ್ನೂ ಅವನ ದೇಶವನ್ನೂ ದಂಡಿಸುವೆನು. 19ಇಸ್ರಯೇಲೆಂಬ ಮಂದೆಯನ್ನು ಮರಳಿ ಅದರ ಹುಲ್ಲುಗಾವಲಿಗೆ ಸೇರಿಸುವೆನು. ಅದು ಕರ್ಮೆಲಿನಲ್ಲೂ ಭಾಷಾನಿನಲ್ಲೂ ಮೇಯುವುದು. ಎಫ್ರಯಿಮಿನ ಮತ್ತು ಗಿಲ್ಯಾದಿನ ಗುಡ್ಡಗಳಲ್ಲಿ ಹೊಟ್ಟೆತುಂಬ ತಿನ್ನುವುದು. 20ಆ ದಿನಗಳಲ್ಲಿ, ಆ ಕಾಲದಲ್ಲಿ ಇಸ್ರಯೇಲಿನ ಅಧರ್ಮವನ್ನು ಎಲ್ಲಿ ಹುಡುಕಿದರೂ ಸಿಗದು. ಜುದೇಯದ ಪಾಪವನ್ನು ತಡಕಿದರೂ ಸಿಗದು. ಏಕೆಂದರೆ ನಾನು ಉಳಿಸಿದ ಜನಶೇಷವನ್ನು ಕ್ಷಮಿಸಿಬಿಡುವೆನು. ಇದು ಸರ್ವೇಶ್ವರನಾದ ನನ್ನ ನುಡಿ.”

**ಬಾಬಿಲೋನಿನ ಪತನ ಕುರಿತು ಜೆರುಸಲೇಮಿನಲ್ಲಿ ಘೋಷಣೆ**

21 ಸರ್ವೇಶ್ವರ ಹೀಗೆನ್ನುತ್ತಾರೆ: “ಮೆರಾಥಯಿಮ್ ನಾಡಿಗೂ ಪಕೋದಿನ ನಿವಾಸಿಗಳಿಗೂ ವಿರುದ್ಧ ದಂಡೆತ್ತಿಹೋಗಿ ಅವರನ್ನು ಸಂಹರಿಸು. ಆ ನಾಡನ್ನು ಪೂರ್ತಿಯಾಗಿ ಹಾಳು ಮಾಡು. ನಾನು ನಿನಗೆ ಆಜ್ಞಾಪಿಸಿದ್ದನ್ನೆಲ್ಲಾ ನೆರವೇರಿಸು. 22ಇಗೋ ಯುದ್ಧದ ಆರ್ಭಟ! ಮಹಾವಿನಾಶದ ಕೂಗಾಟ ನಾಡಿನೊಳಗೆಲ್ಲ! 23ಲೋಕವನ್ನೆಲ್ಲ ಬಡಿದ ಕೊಡಲಿಯಂಥ ಬಾಬಿಲೋನ್ ಈಗ ಮುರಿದು ಚೂರು

ಚೂರಾಗಿದೆ! ಆ ರಾಜ್ಯವು ರಾಷ್ಟ್ರಗಳ ನಡುವೆ ಹಾಳಾಗಿ ಬಿದ್ದಿದೆ. 24ಬಾಬಿಲೋನೇ, ನಿನಗೆ ನಾನು
ಉರುಲೊಡ್ಡಿದ್ದೆ. ನೀನು ತಿಳಿಯದೆ ಅದರಲ್ಲಿ ಸಿಕ್ಕಿಕೊಂಡೆ. ನೀನು ಸರ್ವೇಶ್ವರನೊಂದಿಗೆ ಹೋರಾಡಿದ್ದರಿಂದ
ಬೋನಿನ ವಶವಾದೆ. 25ಸೇನಾಧೀಶ್ವರ ಸರ್ವೇಶ್ವರನೆಂಬ ದೇವರು ಬಾಬಿಲೋನಿನ ದೇಶದಲ್ಲಿ
ನಿರ್ವಹಿಸಬೇಕಾದ ಕಾರ್ಯವೊಂದು ಉಂಟು. ಅದಕ್ಕಾಗಿ ಸರ್ವೇಶ್ವರನಾದ ನಾನು ನನ್ನ ಆಯುಧ
ಶಾಲೆಯನ್ನು ತೆರೆದಿದ್ದೇನೆ. ನನ್ನ ಕೋಪದ ಅಸ್ತ್ರಶಸ್ತ್ರಗಳನ್ನು ಹೊರಗೆ ತೆಗೆದಿದ್ದೇನೆ. 26ಲೋಕದ
ಕಟ್ಟಕಡೆಯಿಂದ ಬಾಬಿಲೋನಿಗೆ ಬನ್ನಿ. ಅದರ ಕಣಜಗಳನ್ನು ತೆರೆಯಿರಿ. ಆ ನಗರವನ್ನು ಹಾಳುದಿಬ್ಬವನ್ನಾಗಿ
ಮಾಡಿ ಪೂರ್ತಿಯಾಗಿ ನಾಶಪಡಿಸಿರಿ. ಅದರಲ್ಲಿ ಏನೂ ಉಳಿಯದಿರಲಿ. 27ಅದರ ಗೂಳಿಗಳನ್ನೆಲ್ಲ ಕೊಲ್ಲಿರಿ.
ಹೋಗಲಿ ಅವು ವಧ್ಯಸ್ಥಾನಕ್ಕೆ. ಅವುಗಳಿಗೆ ಧಿಕ್ಕಾರ. ಅವುಗಳಿಗೆ ಬಂದಿದೆ ವಿಪತ್ಕಾಲ! ಸಮೀಪಿಸಿದೆ
ದಂಡನೆಯ ದಿನ!

28 “ಇಗೋ, ಬಾಬಿಲೋನಿನಿಂದ ತಪ್ಪಿಸಿಕೊಂಡು ಓಡಿಹೋಗುವವರ ಶಬ್ದ! ನಮ್ಮ ದೇವರಾದ
ಸರ್ವೇಶ್ವರನು ತನ್ನ ಆಲಯವನ್ನು ನಾಶಮಾಡಿದವರಿಗೆ ಮುಯ್ಯಿತೀರಿಸಿದ್ದಾರೆ ಎಂಬ ಸಮಾಚಾರವನ್ನು
ಸಿಯೋನಿನಲ್ಲಿ ಸಾರಲು ಧಾವಿಸುತ್ತಿದ್ದಾರೆ ಆ ಜನ.

29 “ಬಿಲ್ಲುಬಾಣಗಾರರನ್ನೆಲ್ಲ ಬಾಬಿಲೋನಿಗೆ ಕರೆಯಿರಿ. ಅದರ ಸುತ್ತಲು ದಂಡಿಳಿಸಿರಿ. ಅದರ
ನಿವಾಸಿಗಳಲ್ಲಿ ಯಾರೂ ತಪ್ಪಿಸಿಕೊಳ್ಳದ ಹಾಗಿರಲಿ. ಅದರ ಕೃತ್ಯಕ್ಕೆ ತಕ್ಕಂತೆ ಮುಯ್ಯಿ ತೀರಿಸಿರಿ. ಅದು
ಮಾಡಿದಂತೆಯೇ ಅದಕ್ಕೆ ಮಾಡಿ. ಏಕೆಂದರೆ ಗರ್ವದಿಂದ ಅದು ಇಸ್ರಯೇಲರ ಪರಮ ಪಾವನನಾದ
ಸರ್ವೇಶ್ವರನನ್ನು ಅಸಡ್ಡೆ ಮಾಡಿದೆ. 30ಆದಕಾರಣ ಆ ದಿನದಂದು ಅಲ್ಲಿ ಯುವಕರು ಬೀದಿ ಚೌಕಗಳಲ್ಲಿ
ಬಿದ್ದು ಸಾಯುವರು. ಯುದ್ಧವೀರರೆಲ್ಲರು ಸತ್ತು ಸ್ತಬ್ದರಾಗುವರು. ಇದು ಸರ್ವೇಶ್ವರನಾದ ನನ್ನ ನುಡಿ.”

31 ಸೇನಾಧೀಶ್ವರ ಸರ್ವೇಶ್ವರನಾದ ದೇವರು ಹೀಗೆನ್ನುತ್ತಾರೆ: “ಎಲೈ ಅಹಂಕಾರಿಯೇ, ನಾನು ನಿನಗೆ
ವಿರುದ್ಧನು. ನಿನಗೆ ಹೊತ್ತು ಬಂದಿದೆ. ನಿನ್ನನ್ನು ದಂಡಿಸತಕ್ಕ ಕಾಲ ಸಮೀಪಿಸಿದೆ. 32ಅಹಂಕಾರದಿಂದ
ಕೂಡಿದ ರಾಜ್ಯ ಎಡವಿ ಬೀಳುವುದು. ಅದನ್ನು ಯಾರೂ ಎತ್ತರು. ಅದರ ನಗರಗಳಿಗೆ ಬೆಂಕಿಹೊತ್ತಿಸುವೆನು.
ಅದು ಸುತ್ತಮುತ್ತಣದನ್ನೆಲ್ಲ ನುಂಗಿಬಿಡುವುದು.”

**ಇಸ್ರಯೇಲಿನ ಉದ್ಧಾರಕ**

33 ಸೇನಾಧೀಶ್ವರರಾದ ಸರ್ವೇಶ್ವರ ಹೀಗೆ ಎನ್ನುತ್ತಾರೆ: “ಇಸ್ರಯೇಲಿನ ಹಾಗು ಜುದೇಯದ
ಜನರಿಬ್ಬರೂ ಹಿಂಸೆಗೆ ಗುರಿಯಾಗಿದ್ದಾರೆ. ಅವರನ್ನು ಸೆರೆಗೆ ಒಯ್ದವರೆಲ್ಲರು ಅವರನ್ನು ಬಿಡುವುದಿಲ್ಲವೆಂದು
ಪಟ್ಟುಹಿಡಿದಿದ್ದಾರೆ. 34ಅವರನ್ನು ಬಿಡಿಸಬಲ್ಲವನು ಬಲಿಷ್ಠನು. ‘ಸೇನಾಧೀಶ್ವರ ಸರ್ವೇಶ್ವರ’ ಎಂಬುದೇ ಆತನ
ನಾಮಧೇಯ. ಆತನೇ ಅವರ ವ್ಯಾಜ್ಯವನ್ನು ಜಯಿಸಿ, ನಾಡಿಗೆ ಶಾಂತಿಯನ್ನು ತಂದು,
ಬಾಬಿಲೋನಿಯದವರಿಗೆ ಕಳವಳವನ್ನುಂಟುಮಾಡುವನು.”

35 ಸರ್ವೇಶ್ವರ ಇಂತೆನ್ನುತ್ತಾರೆ:
“ಬಾಬಿಲೋನಿಯರ ಮೇಲೆ ಬೀಳಲಿದೆ ಖಡ್ಗ
ಅದರ ಜನಸಾಮಾನ್ಯರನ್ನು, ಪದಾಧಿಕಾರಿ
ಗಳನ್ನು, ಪಂಡಿತರನ್ನು
ಇವರೆಲ್ಲರನ್ನು ಹತಿಸಲಿದೆ ಆ ಖಡ್ಗ.
36 ಅದು ಇರಿಯಲಿ ಕೊಚ್ಚಿಕೊಳ್ಳುವವರನ್ನು
ಬಯಲಿಗೆಳೆಯಲಿ ಅವರ ಬುದ್ಧಿಹೀನತೆಯನ್ನು
ಸಂಹರಿಸಲಿ ಆ ಬಾಬಿಲೋನಿನ ಶೂರರನ್ನು
ಬೆಬ್ಬರಬೀಳುವಂತಾಗಿಸಲಿ ಅವರೆಲ್ಲರನ್ನು.
37 ಹೊಡೆಯಲಿ ಅಶ್ವಗಳನ್ನೂ ರಥಗಳನ್ನೂ
ಬಾಬಿಲೋನಿನಲ್ಲಿರುವ ನಾನಾ
ವಿದೇಶಿಯರನ್ನೂ

ಬೆದರಿಸಲಿ ಅವರ ಹೆಂಗಸರನ್ನು,
ಕಬಳಿಸಲಿ, ಸೂರೆಮಾಡಲಿ
ಆ ಖಡ್ಗ ಅವರ ಸಂಪತ್ತನ್ನು.
38 ಅವರ ನೀರನ್ನೆಲ್ಲ ಹೀರಲಿ ಬೇಗನೆ
ಬತ್ತಿಹೋಗಲಿ ಅವರ ತೊರೆ.
ಅಕಟಾ ! ತುಂಬಿದೆ ಆ ದೇಶ ಬೊಂಬೆಗಳಿಂದ
ಮದವೇರಿದೆ ಅದರ ಜನತೆಗೆ
ವಿಗ್ರಹಾರಾಧನೆಯಿಂದ.
39 ಈ ಕಾರಣ, ತೋಳಗಳೂ ಕಾಡುಮೃಗಗಳೂ
ಬೀಡುಮಾಡುವುವಲ್ಲಿ.
ಉಷ್ಟ್ರಪಕ್ಷಿಗಳೂ ತಂಗುವುವು ಅಲ್ಲಿ.
ಅದೆಂದಿಗೂ ನಿವಾಸಸ್ಥಳ ಆಗದು
ತಲತಲಾಂತರಕ್ಕೂ ಜನರು ಅಲ್ಲಿ ಒಕ್ಕಲಿರರು.
40 ಯಾರೂ ನೆಲಸಲಾಗಲಿಲ್ಲ
ನಾನು ಕೆಡವಿದಾ ಸೊದೋಮ್ ಗೊಮೋರ
ನಗರಗಳಲ್ಲಿ
ಅದರ ಸುತ್ತಮುತ್ತಣ ಊರುಗಳಲ್ಲಿ,
ಯಾರೂ ವಾಸಿಸರು ಯಾವ ನರಪ್ರಾಣಿಯೂ
ನೆಲಸದು, ಬಾಬಿಲೋನಿನಲ್ಲಿ.
41 ಇಗೋ ರಾಷ್ಟ್ರವೊಮದು ಬರುವುದು
ಉತ್ತರದಿಂದ:
ಎಚ್ಚರಗೊಳ್ವರು ಮಹಾಜನ ಹಾಗೂ ಅರಸರು
ಬಹುಮಂದಿ
ಬರುವರವರು ಲೋಕದ ಕಟ್ಟಕಡೆಯಿಂದ.
42 ಆ ಕ್ರೂರಿಗಳು, ಆ ನಿಷ್ಕರುಣಿಗಳು
ಹಿಡಿದುಕೊಂಡಿರುವರು ಬಿಲ್ಲನ್ನೂ
ಈಟಿಯನ್ನೂ.
ಅವರ ಧ್ವನಿ ಮೊರೆಯುತ್ತದೆ ಸಮುದ್ರದಂತೆ
ಕುದುರೆ ಸವಾರಿ ತೊಡಗಲಿದೆ.
ಬಾಬಿಲೋನ್ ನಗರಿಯೇ, ಕೇಳು,
ಆ ಸೈನ್ಯ ಶೂರವೀರರಿಂದ ಕೂಡಿದೆ.
ಅದು ನಿನ್ನ ಮೇಲೆ ಯುದ್ಧಸನ್ನದ್ಧವಾಗಿದೆ.
ಸರ್ವೇಶ್ವರನಾದ ನನ್ನ ನುಡಿ ಇದು.
43 ಆ ಸುದ್ದಿ ಬಿತ್ತು ಬಾಬಿಲೋನಿನ ಅರಸನ
ಕಿವಿಗೆ
ಅವನ ಕೈಗಳಿದೋ ಜೋಲುಬಿದ್ದಿವೆ
ಅವನನ್ನು ಹಿಡಿದಿದೆ ಪ್ರಸವವೇದನೆಯಂಥ
ಯಾತನೆ.

44 ಬಾಬಿಲೋನಿಯರಿಗೆ ನಿತ್ಯ ನೆಲೆಯಾದ ಗೋಮಾಳಕ್ಕೆ ಇಗೋ, ಜೋರ್ಡನ್ ದಟ್ಟಡವಿಯಿಂದ ಸಿಂಹದೋಪಾದಿ ನಾನು ಏರಿಬರುವೆನು. ಕ್ಷಣಮಾತ್ರದಲ್ಲಿ ಆ ಬಾಬಿಲೋನಿಯರನ್ನು ಅಲ್ಲಿಂದ ಓಡಿಸಿ

ಬಿಡುವೆನು. ಅದನ್ನು ಪಾಲಿಸುವುದಕ್ಕೆ ನಾನು ಆರಿಸಿಕೊಂಡವನನ್ನೇ ನೇಮಿಸುವೆನು. ನನಗೆ ಸಮಾನನು ಯಾರು? ನ್ಯಾಯವಿಚಾರಣೆಗೆ ನನ್ನನ್ನು ಎಳೆಯಬಲ್ಲ ವ್ಯಕ್ತಿ ಯಾರು? ಮಂದೆಯನ್ನು ಕಾಯುವ ಯಾವನು ತಾನೆ ನನ್ನೆದುರಿಗೆ ನಿಲ್ಲಬಲ್ಲನು?
45ಹೀಗಿರಲು, ಸರ್ವೇಶ್ವರನು ಬಾಬಿಲೋನಿಯದ ವಿಷಯವಾಗಿ ಮಾಡಿಕೊಂಡಿರುವ ಆಲೋಚನೆಯನ್ನು, ಅದರ ಕಸ್ದೀಯರನ್ನು ಕುರಿತು ಸಂಕಲ್ಪಿಸಿರುವ ಉದ್ದೇಶವನ್ನು ಆಲಿಸಿರಿ: ಕಾಡುಮೃಗಗಳು ಹಿಂಡಿನ ಮರಿಗಳನ್ನು ಖಂಡಿತವಾಗಿ ಎಳೆದುಕೊಂಡು ಹೋಗುವುವು. ಅವುಗಳ ನಾಶಕ್ಕಾಗಿ ಹುಲ್ಲುಗಾವಲು ನಿಶ್ಚಯವಾಗಿ ಕಳವಳಪಡುವುದು.
46ಬಾಬಿಲೋನ್ ಶತ್ರುವಶ ಆಯಿತೆಂಬ ಕೋಲಾಹಲಕ್ಕೆ ಭೂಮಿ ಕಂಪಿಸುವುದು. ಅದರ ಮೊರೆ ರಾಷ್ಟ್ರಗಳಿಗೆ ಕೇಳಿಸುವುದು.

### ಬಾಬಿಲೋನಿಗೆ ಶಿಕ್ಷೆ

**51** ಸರ್ವೇಶ್ವರಸ್ವಾಮಿ ಹೀಗೆನ್ನುತ್ತಾರೆ: "ಇಗೋ, ನಾನು ಬಾಬಿಲೋನಿನ ಮೇಲೂ ಅದರ ಲೇಬ್‍ಕಾಮ್ಯೆ ಪ್ರಜೆಗಳ ಮೇಲೂ ವಿನಾಶಕಾರಿಯಾದ ಗಾಳಿಬೀಸುವಂತೆ ಮಾಡುವೆನು.
2ಅನ್ಯಜನರನ್ನು ಬಾಬಿಲೋನಿಗೆ ಕಳುಹಿಸುವೆನು. ಅವರು ಅದನ್ನು ಗಾಳಿಗೆ ತೂರಿಬಿಡುವರು. ನಿಯಮಿತ ವಿಪತ್ಕಾಲದಲ್ಲಿ ಆ ದೇಶಕ್ಕೆ ಮುತ್ತಿಗೆ ಹಾಕಿ ಅದನ್ನು ಬಟ್ಟಬರಿದು ಮಾಡುವರು.
3ಅದರ ಧನುರ್ಧಾರಿಗಳಿಗೂ ಕವಚ ಸನ್ನದ್ಧರಿಗೂ ಬಿಲ್ಲುಬಾಣಗಳನ್ನೆಸೆಯಲು ಅವಕಾಶವಿಲ್ಲದಿರಲಿ. ಬಾಬಿಲೋನಿಯದ ಯುವಕರನ್ನು ಉಳಿಸದಿರಿ. ಅದರ ಸೈನಿಕರನ್ನೆಲ್ಲ ನಿಶ್ಶೇಷಮಾಡಿರಿ.
4ಬಾಬಿಲೋನಿಯರು ತಮ್ಮ ದೇಶದಲ್ಲೆ ಹತರಾಗಿ ಬೀಳುವರು. ಅದರ ಬೀದಿಗಳಲ್ಲೆ ಕತ್ತಿಗೆ ತುತ್ತಾಗಿ ಮಣ್ಣುಪಾಲಾಗುವರು.
5ಇಸ್ರಯೇಲರ ಪರಮಪಾವನ ಸ್ವಾಮಿಯಾದ ನನಗೆ ನನ್ನ ಜನರು ಮಾಡಿದ ಅಪರಾಧ ತಮ್ಮ ನಾಡಿನಲ್ಲಿ ತುಂಬಿದ್ದರೂ ಸೇನಾಧೀಶ್ವರ ಸರ್ವೇಶ್ವರನೆಂಬ ದೇವರಾದ ನಾನು ಇಸ್ರಯೇಲನ್ನಾಗಲಿ ಜುದೇಯವನ್ನಾಗಲಿ ತ್ಯಜಿಸಿ ಬಿಡಲಿಲ್ಲ.
6ನೀವು ಬಾಬಿಲೋನಿನಿಂದ ಓಡಿ ಹೋಗಿ ನಿಮ್ಮ ನಿಮ್ಮ ಪ್ರಾಣಗಳನ್ನು ಉಳಿಸಿಕೊಳ್ಳಿ. ಅದಕ್ಕೆ ಉಂಟಾಗುವ ದಂಡನೆಗೆ ನೀವು ಒಳಗಾಗಬೇಡಿ. ಸರ್ವೇಶ್ವರನಾದ ನಾನು ಮುಯ್ಯಿ ತೀರಿಸುವ ಕಾಲಬಂದಿದೆ. ಬಾಬಿಲೋನಿಗೆ ತಕ್ಕ ಪ್ರತೀಕಾರ ಮಾಡುವೆನು.
7ಬಾಬಿಲೋನ್ ನನ್ನ ಕೈಯಲ್ಲಿರುವ ಹೊನ್ನಿನ ಪಾನಪಾತ್ರೆ. ಲೋಕದವರೆಲ್ಲರು ಅದರಿಂದ ಕುಡಿದು ಮತ್ತರಾದರು. ರಾಷ್ಟ್ರಗಳು ಅದರಿಂದ ಕುಡಿದು ಮತ್ತರಾದರು. ರಾಷ್ಟ್ರಗಳು ಅದರಿಂದ ದ್ರಾಕ್ಷಾರಸವನ್ನು ಕುಡಿದು ಹುಚ್ಚಾದವು.
8ಬಾಬಿಲೋನ್ ತಟ್ಟನೆ ಬಿದ್ದು ಹಾಳಾಯಿತು. ಅದಕ್ಕಾಗಿ ಗೋಳಾಡಿ. ಅದರ ನೋವನ್ನು ನೀಗಿಸಲು ಔಷಧವನ್ನು ತನ್ನಿ. ಒಂದು ವೇಳೆ ಅದು ಗುಣವಾದೀತು!
9ಅಲ್ಲಿರುವ ಹೊರನಾಡಿಗರು, 'ಬಾಬಿಲೋನನ್ನು ಸ್ವಸ್ಥಮಾಡಲು ನಾವು ಪ್ರಯತ್ನಿಸಿದೆವು. ಆದರೆ ಅದು ಸ್ವಸ್ಥವಾಗಲಿಲ್ಲ. ಬಾಬಿಲೋನನ್ನು ಬಿಟ್ಟು ನಾವೆಲ್ಲರು ನಮ್ಮ ನಮ್ಮ ನಾಡುಗಳಿಗೆ ಹೋಗೋಣ. ಅದು ಪಡೆಯಬೇಕಾದ ದಂಡನೆ ಆಕಾಶ ಮುಟ್ಟುವಷ್ಟು ದೊಡ್ಡದು, ಹೌದು, ಅದು ಗಗನದವರೆಗೂ ಬೆಳೆದಿದೆ," ಎನ್ನುವರು.

10 'ಸರ್ವೇಶ್ವರ ನಮ್ಮ ಧಾರ್ಮಿಕತೆಯನ್ನು ವ್ಯಕ್ತಪಡಿಸಿದ್ದಾರೆ. ನಮ್ಮ ದೇವರಾದ ಸರ್ವೇಶ್ವರ ನಡೆಸಿದ ಮಹತ್ಕಾರ್ಯವನ್ನು ಸಿಯೋನಿನಲ್ಲಿ ಪ್ರಕಟಿಸೋಣ ಬನ್ನಿ' ಎಂದು ಹೇಳುವರು."

11 ಸರ್ವೇಶ್ವರನು ಬಾಬಿಲೋನನ್ನು ಹಾಳು ಮಾಡಬೇಕೆಂದು ಉದ್ದೇಶಿಸಿ, ಅದನ್ನು ಮೇದ್ಯರ ಅರಸರು ನಾಶಮಾಡುವಂತೆ ಅವರನ್ನು ಪ್ರೇರೇಪಿಸಿದ್ದಾರೆ. ಆ ನಾಶವು, ಸರ್ವೇಶ್ವರನು ತನ್ನ ಆಲಯವನ್ನು ಕೆಡವಿದವರಿಗೆ ಮಾಡಬೇಕೆಂದಿದ್ದ ಪ್ರತೀಕಾರವೇ ಆಗಿದೆ.

'ಮೇದ್ಯರೇ, ಬಾಣಗಳನ್ನು ಮಸೆಯಿರಿ, ಯುದ್ಧ ಸನ್ನದ್ಧರಾಗಿರಿ;
12ಬಾಬಿಲೋನಿನ ಕೋಟೆಗೆ ಎದುರಾಗಿ ಧ್ವಜವೆತ್ತಿರಿ. ಪಹರೆಯನ್ನು ಬಲಪಡಿಸಿರಿ. ಕಾವಲುಗಾರರನ್ನು ನಿಲ್ಲಿಸಿರಿ. ಹೊಂಚುಗಾರರನ್ನು ಗೊತ್ತುಮಾಡಿರಿ!'

ಸರ್ವೇಶ್ವರಸ್ವಾಮಿ ಬಾಬಿಲೋನಿನವರ ವಿಷಯದಲ್ಲಿ ನುಡಿದಿದ್ದನ್ನು ನೆನಪಿಗೆ ತಂದುಕೊಂಡು ನೆರವೇರಿಸಿದ್ದಾರೆ.
13"ಬಹುಜಲಾಶ್ರಯಗಳ ನಡುವೆ ನಿಂತಿರುವ ನಗರಿಯೇ, ಧನಭರಿತ ಪುರಿಯೇ, ನಿನ್ನ ಅಂತ್ಯಕಾಲವು ಬಂದಿದೆ. ನೀನು ಕೊಳ್ಳೆಹೊಡೆದದ್ದು ಸಾಕಾಗಿದೆ."
14ಸೇನಾಧೀಶ್ವರ ಸರ್ವೇಶ್ವರ ತಮ್ಮ ಮೇಲೆ

ಆಣೆಯಿಟ್ಟು ಹೇಳುವುದು ಇದು: “ಖಂಡಿತವಾಗಿ ನಾನು ಮಿಡತೆಗಳಷ್ಟು ಅಸಂಖ್ಯ ಜನರಿಂದ ನಿನ್ನನ್ನು ತುಂಬಿಸುವೆನು. ಅವರು ನಿನ್ನ ಮೇಲೆ ಜಯಘೋಷಮಾಡುವರು.”

**ದೇವರಿಗೊಂದು ಸ್ತುತಿಗೀತೆ**

15 ಆತ ಭೂಮಿಯನ್ನು ನಿರ್ಮಿಸಿದ ಶಕ್ತಿಯಿಂದ
ಲೋಕವನ್ನು ಸ್ಥಾಪಿಸಿದ ಜ್ಞಾನದಿಂದ
ಆಕಾಶಮಂಡಲವನ್ನು ಹರಡಿದ ವಿವೇಕದಿಂದ.
16 ಆತನ ಗರ್ಜನೆಗೆ ಆಕಾಶದಲ್ಲಿನ ನೀರು
ಭೋರ್ಗರೆಯುತ್ತದೆ
ಭುವಿಯ ಕಟ್ಟಕಡೆಯಿಂದ ಮೋಡ
ಮೇಲೇರುತ್ತದೆ
ಮಳೆಗೋಸ್ಕರ ಮಿಂಚು ಹೊಳೆಯುತ್ತದೆ
ಆತನ ಭಂಡಾರದಿಂದ ಗಾಳಿ ಬೀಸುತ್ತದೆ.
17 ಇದರ ಮುಂದೆ ಜನರು ತಿಳುವಳಿಕೆಯಿಲ್ಲದ
ಪಶುಪ್ರಾಯರು
ತಾನು ಕೆತ್ತಿದ ವಿಗ್ರಹಕ್ಕಾಗಿ ಹೇಸುವನು
ಪ್ರತಿಯೊಬ್ಬ ಅಕ್ಕಸಾಲಿಗನು.
ಪೊಳ್ಳು, ಶ್ವಾಸವಿಲ್ಲದವುಗಳು,
ಅವನು ಎರಕಹೊಯ್ದ ಪುತ್ತಳಿಗಳು.
18 ಅವು ವ್ಯರ್ಥವಾದುವುಗಳು, ಹಾಸ್ಯಾಸ್ಪದ
ಕೃತಿಗಳು,
ದಂಡನೆಯ ಕಾಲದಲ್ಲಿ
ಅಳಿದುಹೋಗುವಂಥವುಗಳು.
19 ಯಕೋಬ್ಯರಿಗೆ ಸ್ವಂತವಾದ ದೇವರು ಅವುಗಳ
ಹಾಗಲ್ಲ
ಆತ ಸಮಸ್ತವನ್ನು ಸೃಷ್ಟಿಸಿದಾತ
ಆತನ ಸೊತ್ತು ಇಸ್ರಯೇಲ್ ವಂಶ
‘ಸೇನಾಧೀಶ್ವರ ಸರ್ವೇಶ್ವರ’ ಎಂಬುದು
ಆತನ ನಾಮಧೇಯ.

**ಸರ್ವೇಶ್ವರನ ಗದೆ**

20 “ಬಾಬಿಲೋನೇ, ನೀನು ನನಗೊಂದು
ಯುದ್ಧಾಸ್ತ್ರ, ಒಂದು ಗದೆ.
ಈ ಗದೆಯಿಂದ ರಾಷ್ಟ್ರಗಳನ್ನು ಬಡಿದು
ಬಿಡುವೆನು.
ರಾಜ್ಯಗಳನ್ನು ಅಳಿಸಿಬಿಡುವೆನು.
21 ಈ ಗದೆಯಿಂದ ಒಡೆದುಬಿಡುವೆನು.
ಕುದುರೆಯನ್ನೂ ಸವಾರನನ್ನೂ,
22 ರಥವನ್ನೂ ಸಾರಥಿಯನ್ನೂ
ಸ್ತ್ರೀಪುರುಷರನ್ನೂ ಬಾಲವೃದ್ಧರನ್ನೂ.

23 ಈ ಗದೆಯಿಂದ ಒಡೆದುಬಿಡುವೆನು
ಕುರುಬನನ್ನೂ ಮಂದೆಯನ್ನೂ
ರೈತನನ್ನೂ ನೊಗದೆತ್ತುಗಳನ್ನೂ
ದೇಶಾಧಿಪತಿಗಳನ್ನೂ
ನಾಡಿನೊಡೆಯರನ್ನೂ."

24 "ಆದರೆ ಬಾಬಿಲೋನಿನವರು ಹಾಗು ಅದರ ಕಸ್ದೀಯರು ಸಿಯೋನಿನಲ್ಲಿ ಮಾಡಿದ ಎಲ್ಲ ಕೇಡಿಗೆ ಪ್ರತಿಯಾಗಿ ನಾನು ಅವರೆಲ್ಲರಿಗೆ ಆ ಸಿಯೋನಿನವರ ಕಣ್ಣೆದುರಿಗೇ ಮುಯ್ಯಿ ತೀರಿಸುವೆನು," ಎನ್ನುತ್ತಾರೆ ಸರ್ವೇಶ್ವರ.

25 "ಲೋಕವನ್ನೆಲ್ಲಾ ನಾಶಮಾಡುವ ಎಲೈ ನಾಶಕ ಪರ್ವತವೇ, ನಾನು ನಿನಗೆ ವಿರುದ್ಧನಾಗಿದ್ದೇನೆ. ನಿನ್ನ ಮೇಲೆ ಕೈಮಾಡಿ, ನಿನ್ನನ್ನು ಬಂಡೆಯ ಮೇಲಿಂದ ಕೆಳಕ್ಕೆ ಉರುಳಿಸುವೆನು. ಸುಟ್ಟ ಬೆಟ್ಟವನ್ನಾಗಿಸುವೆನು.
26ಮೂಲೆಗಲ್ಲಿಗಾಗಲಿ, ಅಸ್ತಿವಾರದ ಕಲ್ಲಿಗಾಗಲಿ ಯಾರೂ ನಿನ್ನಿಂದ ಕಲ್ಲನ್ನು ತೆಗೆಯರು. ನೀನು ನಿತ್ಯ ನಾಶಕ್ಕೆ ಗುರಿಯಾಗುವೆ," ಎನ್ನುತ್ತಾರೆ ಸರ್ವೇಶ್ವರ.

**ಬಾಬಿಲೋನಿನ ಪತನ ಸನ್ನಿಹಿತ**

27 "ನಾಡಿನಲ್ಲಿ ಧ್ವಜವೆತ್ತಿರಿ, ರಾಜ್ಯಗಳಲ್ಲೆಲ್ಲ ಕೊಂಬೂದಿರಿ, ರಾಷ್ಟ್ರಗಳನ್ನು ಸಜ್ಜುಮಾಡಿರಿ. ಬಾಬಿಲೋನಿನ ಮೇಲೆ ಬೀಳಲಿಕ್ಕೆ ಅರರಾಟ್, ಮಿನ್ನಿ, ಅಷ್ಕೆನಜ್ ಎಂಬ ರಾಷ್ಟ್ರಗಳನ್ನು ಕರೆದುಕೊಳ್ಳಿ. ಸೋಲಿಸಬಲ್ಲ ಸೇನಾಪತಿಯನ್ನು ನೇಮಿಸಿರಿ. ಬಿರುಸಾದ ಅಶ್ವಬಲವನ್ನು ಮಿಡತೆಗಳ ದಂಡಿನೋಪಾದಿ ಬರಮಾಡಿ.
28ರಾಷ್ಟ್ರಗಳು, ಮೇದ್ಯರ ಅರಸರು, ಅಧಿಪತಿಗಳು, ಅಧಿಕಾರಿಗಳು, ಅವರ ಕೈಕೆಳಗಿರುವ ಎಲ್ಲ ನಾಡಿನವರು, ಇವರೆಲ್ಲರನ್ನು ಬಾಬಿಲೋನಿಗೆ ವಿರುದ್ಧ ಸಜ್ಜುಗೊಳಿಸಿರಿ.
29ಪೊಡವಿ ನೊಂದು ನಡುಗುತ್ತಿದೆ! ಏಕೆಂದರೆ ಬಾಬಿಲೋನ್ ದೇಶ ಹಾಳು ಬಿದ್ದು ನಿರ್ಜನವಾಗಲಿ ಎಂದು ಸರ್ವೇಶ್ವರ ಅದರ ವಿಷಯವಾಗಿ ಮಾಡಿಕೊಂಡಿರುವ ಸಂಕಲ್ಪ ಅಚಲವಾಗಿದೆ.
30ಬಾಬಿಲೋನಿಯದ ಶೂರರು ಯುದ್ಧಕ್ಕೆ ಹಿಂಜರಿದು ಹೆಂಗಸರಂತೆ, ಹೇಡಿಗಳಂತೆ ತಮ್ಮ ಕೋಟೆಗಳಲ್ಲೆ ನಿಂತಿದ್ದಾರೆ. ಅದರ ಹೆಬ್ಬಾಗಿಲುಗಳು ಮುರಿದುಬಿದ್ದಿವೆ. ಅದರ ಮನೆಗೆ ಬೆಂಕಿಯಿಕ್ಕಲಾಗಿದೆ.
31ಒಬ್ಬ ಸುದ್ದಿಗಾರ ಇನ್ನೊಬ್ಬ ಸುದ್ದಿಗಾರನತ್ತ ಓಡುತ್ತಾನೆ. ಒಬ್ಬ ದೂತ ಇನ್ನೊಬ್ಬ ದೂತನತ್ತ ದೌಡಾಯಿಸುತ್ತಾನೆ. 'ರಾಜಧಾನಿಯನ್ನು ಎಲ್ಲಾ ಕಡೆಯಿಂದಲೂ ಆಕ್ರಮಿಸಿದ್ದಾರೆ.
32ರೇವುಗಳನ್ನು ಹಿಡಿದಿದ್ದಾರೆ. ಹುಲ್ಲಿಗೆ ಬೆಂಕಿ ಹಚ್ಚಿದ್ದಾರೆ. ರಣವೀರರು ಭಯಭ್ರಾಂತರಾಗಿದ್ದಾರೆ' ಎಂದು ಬಾಬಿಲೋನಿನ ಅರಸನಿಗೆ ತಿಳಿಸುತ್ತಾರೆ.
33ಬಾಬಿಲೋನ್ ನಗರವು ತುಳಿದು ತುಳಿದು ಸರಿಮಾಡಿದ ಕಣದಂತಿದೆ. ಇಷ್ಟರಲ್ಲೆ ಕೊಯ್ಲುಕಾಲ ಅದಕ್ಕೆ ಸಂಭವಿಸಲಿದೆ; ಇದು ಇಸ್ರಯೇಲರ ದೇವರೂ ಸೇನಾಧೀಶ್ವರನೂ ಆದ ಸರ್ವೇಶ್ವರನ ನುಡಿ."

ಜುದೇಯಕ್ಕೆ ಗೋಳಾಟ – ಬಾಬಿಲೋನಿಗೆ ಪ್ರತೀಕಾರ

34 ಬಾಬಿಲೋನಿಯದ ಅರಸ ನೆಬೂಕದ್ನೆಚ್ಚರನು
ನನ್ನನ್ನು ಮುರಿದು ತಿಂದುಬಿಟ್ಟ
ನನ್ನನ್ನು ಕುಡಿದು ಬಿಸಾಡಿದ
ಪಾತ್ರೆಯನ್ನಾಗಿಸಿಬಿಟ್ಟ.
ಘಟಸರ್ಪದ ಹಾಗೆ ನನ್ನನ್ನು ನುಂಗಿದ
ನನ್ನ ರುಚಿಪದಾರ್ಥಗಳಿಂದ ಹೊಟ್ಟೆ
ತುಂಬಿಸಿಕೊಂಡ
ಮಿಕ್ಕಿದುದನ್ನೆಲ್ಲ ತೊಳೆದು ಎಸೆದು ಬಿಟ್ಟ.
35 'ನಮ್ಮ ಪ್ರಾಣವನ್ನು ಹಿಂಡಿದ ದೋಷ
ಬಾಬಿಲೋನಿಗೆ ತಟ್ಟಲಿ'

ಎನ್ನುತ್ತದೆ ಸಿಯೋನ್.
'ನಮ್ಮ ರಕ್ತವನ್ನು ಸುರಿಸಿದ ಅಪರಾಧ
ಅದರ ಕಸ್ದೀಯರಿಗೆ ಬಡಿಯಲಿ!'
ಎನ್ನುತ್ತದೆ ಜೆರುಸಲೇಮ್.

36 ಸರ್ವೇಶ್ವರ ಹೀಗೆನ್ನುತ್ತಾರೆ: "ಇಗೋ, ನಾನು ನಿನ್ನ ಪರವಾಗಿ ವ್ಯಾಜ್ಯಮಾಡಿ ನಿನ್ನನ್ನು ಹಿಂಸಿಸಿದ ರಾಜ್ಯಕ್ಕೆ ಮುಯ್ಯಿತೀರಿಸುವೆನು. ಅದರ ಸರೋವರ ಬತ್ತಿ ಹೋಗುವಂತೆಯೂ ಅದರ ಪ್ರವಾಹ ಒಣಗಿ ಹೋಗುವಂತೆಯೂ ಮಾಡುವೆನು. 37ಆಗ ಬಾಬಿಲೋನ್ ಹಾಳುದಿಬ್ಬ ಆಗುವುದು. ಗುಳ್ಳೆನರಿಗಳ ಬೀಡಾಗುವುದು. ಅದು ಭಯಬೀತಿಗೂ ಸೀಳು ಪರಿಹಾಸ್ಯಕ್ಕೂ ಆಸ್ಪದವಾಗುವುದು. 38ಬಾಬಿಲೋನಿನವರು ಯುವ ಸಿಂಹಗಳಂತೆ ಒಟ್ಟಿಗೆ ಗರ್ಜಿಸುವರು, ಸಿಂಹದ ಮರಿಗಳಂತೆ ಗುರುಗುಟ್ಟುವರು. 39ಅವರು ಹೊಟ್ಟೆಬಾಕರೇ ಸರಿ. ಅವರಿಗೆ ಔತಣವನ್ನು ಸಿದ್ಧಮಾಡುವೆನು. ತಿಂದು ಸಂಭ್ರಮಪಡುವಂತೆ ಮಾಡುವೆನು. ತಲೆಗೇರುವತನಕ ಕುಡಿಸಿ ಎಂದಿಗೂ ಎಚ್ಚರಗೊಳ್ಳದೆ ಚಿರನಿದ್ರೆಯಲ್ಲಿರುವಂತೆ ಮಾಡುವೆನು. 40ಕುರಿ, ಟಗರು, ಹೋತಗಳ ಹಾಗೆ ಅವರನ್ನು ವಧ್ಯಸ್ಥಾನಕ್ಕೆ ಬರಮಾಡುವೆನು. ಇದು ಸರ್ವೇಶ್ವರನಾದ ನನ್ನ ನುಡಿ."

**ಬಾಬಿಲೋನನ್ನು ಕುರಿತ ಶೋಕಗೀತೆ**

41 ಏನು, ಶೇಷಕ್ ಶತ್ರುವಶವಾಯಿತೆ? ಲೋಕಪ್ರಸಿದ್ಧ ನಗರ ಶರಣಾಗತವಾಯಿತೆ? 42ರಾಷ್ಟ್ರಗಳ ಕಣ್ಣಿಗೆ ಬಾಬಿಲೋನ್ ಭೀಕರವಾಗಿ ಬಿಟ್ಟಿದೆ, ಸಮುದ್ರವೆ ಬಾಬಿಲೋನಿಯದ ಮೇಲೆ ನುಗ್ಗಿಬಿಟ್ಟಿದೆ, ಲೆಕ್ಕವಿಲ್ಲದ ತೆರೆಗಳು ಆ ರಾಜ್ಯವನ್ನು ಮುಚ್ಚಿಬಿಟ್ಟಿವೆ. 43ಕಾಡು, ಕಗ್ಗಾಡು, ಬೆಂಗಾಡು ಆಗಿವೆ ಅದರ ನಗರಗಳು. ಆ ದೇಶದೊಳು ಯಾರೂ ವಾಸಿಸರು, ಯಾವ ನರಪ್ರಾಣಿಯೂ ಹಾದುಹೋಗದು. 44"ಬಾಬಿಲೋನಿಯದ ಬೇಲ್‌ದೇವತೆಯನ್ನು ದಂಡಿಸುವೆನು. ಅದು ನುಂಗಿದ್ದನ್ನು ಅದರ ಬಾಯಿಂದಲೇ ಕಕ್ಕಿಸುವೆನು. ಪ್ರವಾಹವಾಗಿ ಅಲ್ಲಿಗೆ ಬರುತ್ತಿದ್ದ ಸಕಲ ದೇಶೀಯರು ಇನ್ನು ಬಾರರು. ಆ ಬಾಬಿಲೋನಿನ ಪೌಳಿಗೋಡೆ ಇನ್ನು ಬಿದ್ದು ಹೋಗುವುದು. 45ನನ್ನ ಜನರೇ, ಬಾಬಿಲೋನನ್ನು ಬಿಟ್ಟು ಹೊರಡಿ. ನನ್ನ ಕೋಪಾಗ್ನಿಯಿಂದ ತಪ್ಪಿಸಿಕೊಳ್ಳಿ. 46ನಿಮ್ಮ ಎದೆ ಕುಂದದಿರಲಿ. ನಾಡಿನಲ್ಲಿ ಕಿವಿಗೆ ಬೀಳುವ ಸುದ್ದಿ ನಿಮ್ಮನ್ನು ಹೆದರಿಸದಿರಲಿ. ಒಂದು ವರ್ಷ ಒಂದು ಸುದ್ದಿಯಾದರೆ ಮತ್ತೊಂದು ವರ್ಷ ಮತ್ತೊಂದು ಸುದ್ದಿ. ಹಿಂಸಾಚಾರ ಪ್ರಬಲವಾಗುತ್ತಿದೆ ನಾಡಿನಲ್ಲಿ. ಅಧಿಕಾರಿಗೆ ಅಧಿಕಾರಿಯೇ ವಿರೋಧಿ ಅಲ್ಲಿ. 47ಇಗೋ ಬಾಬಿಲೋನಿಯದ ವಿಗ್ರಹಗಳನ್ನು ದಂಡಿಸುವ ದಿನಗಳು ಬರಲಿವೆ. ಆ ನಾಡೆಲ್ಲ ನಾಚಿಕೆಗೆ ಈಡಾಗುವುದು. ಅದರ ಪ್ರಜೆಗಳು ಅದರಲ್ಲೇ ಹತರಾಗಿ ಬೀಳುವರು. 48ಆಗ ಭೂಮಿ ಆಕಾಶಗಳೂ ಅಲ್ಲಿನ ಸಮಸ್ತವೂ ಬಾಬಿಲೋನಿನ ನಾಶ ನೋಡಿ ಜಯಘೋಷಮಾಡುವುವು. ಹಾಳುಮಾಡುವರು, ಉತ್ತರದಿಂದ ಬಂದು ಹಾಳು ಮಾಡುವರು. 49ಹತರಾದ ಇಸ್ರಯೇಲರೇ, ಬಾಬಿಲೋನಿಯದ ಹಿತಕ್ಕಾಗಿ ಲೋಕದ ಬಹುಜನ ಹತರಾದರು. ಅಂತೆಯೇ ಬಾಬಿಲೋನ್ ಹತವಾಗುವುದು. ಸರ್ವೇಶ್ವರನಾದ ನನ್ನ ನುಡಿ ಇದು."

50 "ಕತ್ತಿಯಿಂದ ತಪ್ಪಿಸಿಕೊಂಡವರೇ, ಸುಮ್ಮನೆ ನಿಂತುಕೊಳ್ಳದೆ ನಡೆಯಿರಿ. ದೂರವಿರುವಾಗಲು ಸರ್ವೇಶ್ವರನನ್ನು ಸ್ಮರಿಸಿರಿ. ಜೆರುಸಲೇಮನ್ನು ಕುರಿತು ಮನಸ್ಸಾರೆ ಹಂಬಲಿಸಿರಿ. 51'ನಿಂದೆಯನ್ನು ಕೇಳಿ ನಾವು ಲಜ್ಜೆಗೊಂಡೆವು. ಮ್ಲೇಚ್ಛರು ಸರ್ವೇಶ್ವರನ ಪವಿತ್ರಾಲಯವನ್ನು ಪ್ರವೇಶಿಸಿದ್ದರಿಂದ ಅವಮಾನವು ನಮ್ಮ ಮುಖವನ್ನು ಆವರಿಸಿದೆ,' ಎನ್ನುತ್ತೀರೋ? 52ಸರ್ವೇಶ್ವರನಾದ ನಾನು ಹೇಳುವುದನ್ನು ಕೇಳಿ: "ಬರಲಿವೆ ಬಾಬಿಲೋನಿನ ವಿಗ್ರಹಗಳನ್ನು ದಂಡಿಸುವ ದಿನಗಳು. ಆಗ ಆ ದೇಶದೊಳೆಲ್ಲ ನರಳಾಡುವರು ಗಾಯಗೊಂಡವರು. 53ಬಾಬಿಲೋನ್ ಆಕಾಶದ ತನಕ ಬೆಳೆದರೂ ಎತ್ತರವಾದ, ಬಲವಾದ ಕೋಟೆಕಟ್ಟಿ ಭದ್ರಪಡಿಸಿಕೊಂಡರೂ ನನ್ನ ಅಪ್ಪಣೆಯ ಮೇರೆಗೆ ಜನರು ಹಾಳುಮಾಡುವರು; ಅದರ ಮೇಲೆ ಬೀಳುವರು. ಸರ್ವೇಶ್ವರನಾದ ನನ್ನ ನುಡಿ ಇದು."

54 "ಇಗೋ, ಕೇಳಿ ಬರುತ್ತಿದೆ ಬಾಬಿಲೋನಿನಿಂದ
ಕೂಗಾಟ !
ಆ ಬಾಬಿಲೋನಿಯರ ದೇಶದಿಂದ

ಮಹಾ ವಿನಾಶನದ ಕಿರುಚಾಟ !
55 ಬಾಬಿಲೋನನ್ನು ನಾನು ಹಾಳು
ಮಾಡಿಬಿಡುತ್ತೇನೆ
ಅದರ ಸದ್ದುಗದ್ದಲವನ್ನು ಅಡಗಿಸಿಬಿಡುತ್ತೇನೆ.
ಮಹ ಜಲಪ್ರವಾಹಗಳು ಭೋರ್ಗರೆಯುವಂತೆ
ಅಲೆಅಲೆಯಾಗಿ ಬಂದ ಶತ್ರುಗಳು ಘೋಷಿಸಿ
ಆರ್ಭಟಿಸುತ್ತಿದ್ದಾರೆ.
56 ವಿನಾಶಕಾರನು ಬಂದೆರಗಿದ್ದಾನೆ
ಬಾಬಿಲೋನಿನ ಮೇಲೆ
ಅದರ ಶೂರರೋ ಸೆರೆಯಾಗಿಬಿಟ್ಟಿದ್ದಾರೆ
ಅವರ ಬಿಲ್ಲುಗಳೋ ಮುರಿದುಹೋಗಿವೆ.
ಸರ್ವೇಶ್ವರನು ಮುಯ್ಯಿತೀರಿಸುವ ದೇವರು
ಆತ ಪ್ರತಿಕ್ರಿಯೆ ವ್ಯಕ್ತಪಡಿಸದೆ ಇರನು.
57 ಬಾಬಿಲೋನಿನ ರಾಜ್ಯಪಾಲರು, ಮಂತ್ರಿಗಳು,
ಅಧಿಪತಿಗಳು, ಅಧಿಕಾರಿಗಳು, ಯೋಧರು,
ಇವರೆಲ್ಲರಿಗೆ ತಲೆಗೇರುವ ತನಕ ಕುಡಿಸುವೆನು.
ಅವರು ಎಂದೆಂದಿಗೂ ಎಚ್ಚರಗೊಳ್ಳದೆ
ಚಿರನಿದ್ರೆ ಮಾಡುವರು
ಎನ್ನುತ್ತಾರೆ ಸೇನಾಧೀಶ್ವರ ಸರ್ವೇಶ್ವರನೆಂಬ
ರಾಜಾಧಿರಾಜರು."
58 ಸೇನಾಧೀಶ್ವರ ಸರ್ವೇಶ್ವರ ಹೀಗೆನ್ನುತ್ತಾರೆ:
"ಬಾಬಿಲೋನಿನ ದೊಡ್ಡ ಪೌಳಿಗೋಡೆ
ಪೂರ್ಣವಾಗಿ ನೆಲಸಮವಾಗುವುದು.
ಅದರ ಉನ್ನತ ದ್ವಾರಗಳು ಬೆಂಕಿಯಿಂದ
ಸುಟ್ಟು ಹೋಗುವುವು
ರಾಷ್ಟ್ರಗಳು ದುಡಿದದ್ದು ಬೆಂಕಿಗೆ
ತುತ್ತಾಗುವುದು."

## ಯೆರೆಮೀಯನು ಸುರುಳಿ ಯೂಫ್ರೆಟಿಸ್ ನದಿಪಾಲು

59 ಮಸ್ಸೇಯನ ಮೊಮ್ಮಗನೂ ನೇರೀಯನ ಮಗನೂ ಆದ ಸೆರಾಯನು ಜುದೇಯದ ಅರಸ ಚಿದ್ಕೀಯನ ಆಳ್ವಿಕೆಯ ನಾಲ್ಕನೆಯ ವರ್ಷದಲ್ಲಿ ಚಿದ್ಕೀಯನೊಡನೆ ಬಾಬಿಲೋನಿಗೆ ಪ್ರಯಾಣ ಮಾಡಿದನು. ಆಗ ಪ್ರವಾದಿ ಯೆರೆಮೀಯನು ಸೆರಾಯನಿಗೆ ಒಂದು ಅಪ್ಪಣೆಯನ್ನು ಕೊಟ್ಟನು. 60ಸೆರಾಯನು ಸರಬರಾಯಿನ ಕಾರಬಾರಿ. ಯೆರೆಮೀಯನು ಬಾಬಿಲೋನಿಗೆ ಸಂಭವಿಸತಕ್ಕ ಎಲ್ಲ ಕೇಡಿನ ವಿಷಯವನ್ನು, ಅಂದರೆ ಬಾಬಿಲೋನಿನ ಸಂಬಂಧವಾಗಿ ಹಿಂದೆ ಲಿಖಿತವಾದ ಎಲ್ಲ ಸಂಗತಿಗಳನ್ನು, ಒಂದು ಗ್ರಂಥವಾಗಿ ಬರೆದು ಸೆರಾಯನಿಗೆ ಹೀಗೆಂದು ಹೇಳಿದನು: 61"ನೋಡು, ನೀನು ಬಾಬಿಲೋನನ್ನು ತಲುಪಿದ ಮೇಲೆ ಈ ಮಾತುಗಳನ್ನೆಲ್ಲ ತಕ್ಕವರಿಗೆ ಓದಿ ಹೇಳು. 62ಬಳಿಕ, 'ಸರ್ವೇಶ್ವರಾ, ನೀವು ಈ ಸ್ಥಳವನ್ನು ನಿರ್ಮೂಲಮಾಡಲು ಉದ್ದೇಶಿಸಿ, ಇದು ಜನರಿಗೂ ಜಾನುವಾರುಗಳಿಗೂ ನೆಲೆಯಾಗದೆ ಸದಾಕಾಲ ಹಾಳಾಗಿಯೇ ಉಳಿಯಲಿ ಎಂದು ನುಡಿದಿದ್ದೀರಲ್ಲಾ!' ಎಂದು ಅರಿಕೆಮಾಡು. 63ಈ ಸುರುಳಿಯನ್ನು ಓದಿ ಮುಗಿಸಿದ ಮೇಲೆ ಇದಕ್ಕೆ ಕಲ್ಲುಕಟ್ಟಿ ಯೂಫ್ರೆಟಿಸ್ ನದಿಯ ಮಧ್ಯೆ ಎಸೆದುಬಿಡು. 64ಆಮೇಲೆ,

‘ಸರ್ವೇಶ್ವರಸ್ವಾಮಿ ಬಾಬಿಲೋನಿಗೆ ಬರಮಾಡುವ ವಿಪತ್ತಿನಿಂದ ಈ ನಗರ ಹೀಗೆಯೇ ಮುಳುಗುವುದು, ಮತ್ತೆ ಏಳದು,’ ಎಂದು ಹೇಳು.”

ಇಲ್ಲಿಗೆ ಯೆರೆಮೀಯನ ಪ್ರವಾದನೆ ಮುಗಿಯಿತು.

## ಅನುಬಂಧ – ಜೆರುಸಲೇಮಿನ ಪತನ

(2 ಅರಸು 24.18–35.7)

**52** ಚಿದ್ಕೀಯನು ಅರಸನಾದಾಗ ಅವನಿಗೆ ಇಪ್ಪತ್ತೊಂದು ವರ್ಷ. ಅವನು ಜೆರುಸಲೇಮನ್ನು ಹನ್ನೊಂದು ವರ್ಷ ಆಳಿದ. ಅವನ ತಾಯಿ ಲಿಬ್ನದ ಯೆರೆಮೀಯನ ಮಗಳಾದ ಹಮೂಟಲ್ ಎಂಬಾಕೆ. 2ಚಿದ್ಕೀಯನು ಯೆಹೋಯಾಕೀಮನಂತೆ ಸರ್ವೇಶ್ವರನ ಚಿತ್ತಕ್ಕೆ ವಿರುದ್ಧವಾಗಿ ನಡೆದ. 3ಸರ್ವೇಶ್ವರಸ್ವಾಮಿ ಬಹಳ ಕೋಪಗೊಂಡು ಜೆರುಸಲೇಮಿನವರ ಮೇಲೂ ಬೇರೆ ಎಲ್ಲ ಯೆಹೂದ್ಯರ ಮೇಲೂ ಇದನ್ನೆಲ್ಲ ಬರಮಾಡಿ, ಕಡೆಗೆ ಅವರನ್ನು ತಮ್ಮ ಸನ್ನಿಧಿಯಿಂದ ತಳ್ಳಿಬಿಟ್ಟರು.

ಚಿದ್ಕೀಯನು ಬಾಬಿಲೋನಿನ ಅರಸನಾದ ನೆಬೂಕದ್ನೆಚ್ಚರನ ವಿರುದ್ಧ ತಿರುಗಿಬಿದ್ದ. 4ಅವನು ಚಿದ್ಕೀಯನ ಆಳ್ವಿಕೆಯ ಒಂಬತ್ತನೆಯ ವರ್ಷದ ಹತ್ತನೆಯ ತಿಂಗಳಿನ ಹತ್ತನೆಯ ದಿನ ಸರ್ವ ಸೈನ್ಯ ಸಮೇತ ಜೆರುಸಲೇಮಿಗೆ ಬಂದ. ಅಲ್ಲಿ ಪಾಳೆಯ ಮಾಡಿಕೊಂಡು ಅದರ ಸುತ್ತಲು ಮಣ್ಣಿನ ದಿಬ್ಬವನ್ನು ಎಬ್ಬಿಸಿದ. 5ಚಿದ್ಕೀಯನ ಆಳ್ವಿಕೆಯ ಹನ್ನೊಂದನೆಯ ವರ್ಷದಲ್ಲಿ ಅದಕ್ಕೆ ಮುತ್ತಿಗೆ ಹಾಕಿದ. 6ಘೋರಕ್ಷಾಮದ ಕಾರಣ ನಗರದವರಿಗೆ ಆಹಾರ ಸಿಕ್ಕದೆ ಹೋಯಿತು. ನಗರಕ್ಕೆ ಮುತ್ತಿಗೆ ಹಾಗಿದ್ದ ಬಾಬಿಲೋನಿಯರು ಹನ್ನೊಂದನೆಯ ತಿಂಗಳಿನ ಒಂಬತ್ತನೆಯ ದಿವಸ ಪೌಳಿಗೋಡೆಯಲ್ಲಿ ಒಂದು ದ್ವಾರವನ್ನು ಮಾಡಿದರು. 7ಒಳಗಿದ್ದ ಎಲ್ಲ ಸೈನಿಕರು ಅದೇ ರಾತ್ರಿ ಅರಸನ ತೋಟದ ಬಳಿಯಿದ್ದ ಬಾಗಿಲಿನ ಮೂಲಕ ನಗರದಿಂದ ಓಡಿಹೋದರು. ಆ ಬಾಗಿಲು ಎರಡು ಗೋಡೆಗಳ ಮಧ್ಯೆಯಿತ್ತು. ಅವರು ಅರಾಬಾ ಎಂಬ ಕಣಿವೆ ಪ್ರದೇಶದ ಮಾರ್ಗವಾಗಿ ಪಲಾಯನ ಮಾಡಿದರು. 8ಬಾಬಿಲೋನಿಯದ ಸೈನಿಕರು ಅರಸ ಚಿದ್ಕೀಯನನ್ನು ಹಿಂದಟ್ಟಿ ಜೆರಿಕೋವಿನ ಬಯಲಿನಲ್ಲಿ ಹಿಡಿದರು. ಅಷ್ಟರಲ್ಲಿ ಅವನ ಸೈನಿಕರೆಲ್ಲ ಅವನನ್ನು ಬಿಟ್ಟು ಚದರಿಹೋಗಿದ್ದರು. 9ಅನಂತರ ಬಾಬಿಲೋನಿಯರು ಅವನನ್ನು ತಮ್ಮ ಅರಸ ನೆಬೂಕದ್ನೆಚ್ಚರನ ಬಳಿಗೆ ಎಳೆದುತಂದರು. ಆ ಅರಸನು ಚಿದ್ಕೀಯನಿಗೆ ಶಿಕ್ಷೆ ವಿಧಿಸಿ ಅವನ ಮಕ್ಕಳನ್ನು ಅವನ ಕಣ್ಣೆದುರಿಗೆ ವಧಿಸಿದ. ಜುದೇಯದ ಎಲ್ಲ ಪದಾಧಿಕಾರಿಗಳನ್ನು ರಿಬ್ಲದಲ್ಲಿ ಕೊಲ್ಲಿಸಿದ. 11ಇದಲ್ಲದೆ ಬಾಬಿಲೋನಿಯದ ಆ ಅರಸನು ಚಿದ್ಕೀಯನ ಎರಡು ಕಣ್ಣುಗಳನ್ನು ಕಿತ್ತು ಅವನಿಗೆ ಬೇಡಿ ಹಾಕಿ ಬಾಬಿಲೋನಿಗೆ ತೆಗೆದುಕೊಂಡುಹೋಗಿ ಜೀವನಾವಧಿಯವರೆಗೆ ಅವನನ್ನು ಸೆರೆಯಲ್ಲಿಟ್ಟ.

12 ಐದನೆಯ ತಿಂಗಳಿನ ಹತ್ತನೆಯ ದಿನ, ಅಂದರೆ ಬಾಬಿಲೋನಿನ ಅರಸ ನೆಬೂಕದ್ನೆಚ್ಚರನ ಆಳ್ವಿಕೆಯ ಹತ್ತೊಂಬತ್ತನೆಯ ವರ್ಷದಲ್ಲಿ, ಬಾಬಿಲೋನಿನ ಅರಸನ ಸೇವಕನೂ ರಕ್ಷಾದಳದ ಅಧಿಪತಿಯೂ ಆಗಿದ್ದ ನೆಬೂಜರದಾನ್ ಎಂಬುವನು ಜೆರುಸಲೇಮಿಗೆ ಬಂದನು. 13ಸರ್ವೇಶ್ವರನ ಆಲಯವನ್ನೂ ಅರಮನೆಯನ್ನೂ ಜೆರುಸಲೇಮಿನ ಎಲ್ಲ ದೊಡ್ಡ ಮನೆಗಳನ್ನೂ ಸುಟ್ಟುಬಿಟ್ಟನು. 14ಅವನ ಜೊತೆಯಲ್ಲಿ ಬಂದಿದ್ದ ಬಾಬಿಲೋನಿಯದ ಸೈನ್ಯದವರು ಜೆರುಸಲೇಮಿನ ಸುತ್ತ ಗೋಡೆಗಳನ್ನೆಲ್ಲ ಕೆಡವಿದರು. 15ರಕ್ಷಾದಳದ ಅಧಿಪತಿಯಾದ ನೆಬೂಜರದಾನನು ಅನೇಕ ದಟ್ಟ ದರಿದ್ರರನ್ನೂ ನಗರದಲ್ಲೆ ಉಳಿದವರನ್ನೂ ಮೊದಲೇ ಬಾಬಿಲೋನಿನ ಅರಸನಿಗೆ ಮೊರೆ ಹೊಕ್ಕವರನ್ನೂ ಹಾಗು ಬೇರೆ ಜನರೆಲ್ಲರನ್ನು ಸೆರೆಗೆ ಒಯ್ದನು. 16ಹೊಲಗಳನ್ನು ಮತ್ತು ದ್ರಾಕ್ಷಿಯ ತೋಟಗಳನ್ನು ವ್ಯವಸಾಯ ಮಾಡುವುದಕ್ಕಾಗಿ ನಾಡಿನ ಜನರಲ್ಲಿ ಕೇವಲ ದರಿದ್ರರನ್ನು ಮಾತ್ರ ಬಿಟ್ಟುಹೋದನು.

17 ಬಾಬಿಲೋನಿಯರು ಸರ್ವೇಶ್ವರನ ಆಲಯದಲ್ಲಿದ್ದ ಕಂಚಿನ ಕಂಬಗಳನ್ನೂ ಚಕ್ರದ ಬಂಡಿಗಳನ್ನೂ ಕಂಚಿನ ಕಡಲೆಂಬ ಪಾತ್ರೆಯನ್ನೂ ಒಡೆದು ಅವುಗಳ ಕಂಚನ್ನೆಲ್ಲ ಕೊಂಡೊಯ್ದರು. 18ಅದು ಮಾತ್ರವಲ್ಲ, ಸರ್ವೇಶ್ವರನ ಆಲಯದ ಸೇವೆಗಾಗಿ ಉಪಯೋಗಿಸುತ್ತಿದ್ದ ಬೋಗುಣಿ, ಸಲಿಕೆ, ಕತ್ತರಿ, ಬಟ್ಟಲು, ಸಾಂಬ್ರಾಣಿಕಳಸ ಮುಂತಾದ ಕಂಚಿನ ಸಾಮಾನುಗಳನ್ನೂ ಬಾಬಿಲೋನಿಗೆ ತೆಗೆದುಕೊಂಡು ಹೋದರು.

19ರಕ್ಷಾದಳದ ನಾಯಕನು ಬೆಳ್ಳಿ ಬಂಗಾರದ ಪಂಚಪಾತ್ರೆ, ಅಗ್ಗಿಷ್ಟಿಕೆ, ಬಟ್ಟಲು, ಬೋಗುಣಿ, ದೀಪಸ್ತಂಭ, ಸಾಂಬ್ರಾಣಿ ಕಳಸ, ಪಾನಾರ್ಪಣೆಯ ಪಾತ್ರೆ ಮೊದಲಾದವುಗಳನ್ನು ದೋಚಿಕೊಂಡನು. 20ಅರಸ ಸೊಲೊಮೋನನು ಸರ್ವೇಶ್ವರನಾಲಯಕ್ಕಾಗಿ ಮಾಡಿಸಿದ ಎರಡು ಕಂಬಗಳು, ಕಂಚಿನ ಕಡಲೆಂಬ ಪಾತ್ರೆ, ಪೀಠಗಳನ್ನು ಹೊರುವ ಹನ್ನೆರಡು ಕಂಚಿನ ಹೋರಿಗಳು, ಇವುಗಳನ್ನು ಮಾಡುವುದಕ್ಕೆ ಎಷ್ಟೋ ಕಂಚು ಹಿಡಿದಿತ್ತು. 21ಕಂಬಗಳಲ್ಲಿ ಮೊದಲನೆಯ ಕಂಬ ಎಂಟು ಮೀಟರ್ ಎತ್ತರವಿತ್ತು. ಅದರ ಸುತ್ತಳತೆ 5.3ಮೀಟರ್. ಅದರ ಒಳಭಾಗ ಹೊಳ್ಳಾಗಿತ್ತು. ಆ ಲೋಹ ನಾಲ್ಕು ಬೆರಳು ದಪ್ಪವಾಗಿತ್ತು. 22ಕಂಬದ ಮೇಲೆ 2.2 ಮೀಟರ್ ಎತ್ತರವಾದ ಒಂದು ಕಂಚಿನ ಕುಂಭವಿತ್ತು. ಆ ಕುಂಭದ ಮೇಲೆ ಸುತ್ತಲೂ ಕಂಚಿನ ಜಾಲರಿ ಹಾಗೂ ದಾಳಿಂಬೆ ಹಣ್ಣುಗಳು ಇದ್ದವು. ಎರಡನೆಯ ಕಂಬವು ದಾಳಿಂಬೆ ಹಣ್ಣುಗಳಿಂದ ಹಾಗೆಯೆ ಅಲಂಕಾರವಾಗಿತ್ತು. 23ನಾಲ್ಕು ಪಕ್ಕಗಳಲ್ಲಿ ತೊಂಬತ್ತಾರು ದಾಳಿಂಬೆ ಹಣ್ಣುಗಳಿದ್ದವು. ಜಾಲರಿಯ ಮೇಲೆ ಸುತ್ತಲೂ ಒಟ್ಟಿಗೆ ನೂರು ದಾಳಿಂಬೆ ಹಣ್ಣುಗಳಿದ್ದವು.

24 ರಕ್ಷಾದಳದ ನಾಯಕ ನೆಬೂಜರದಾನನು ಹಿಡಿದುಕೊಂಡು ಹೋದ ಜನರಲ್ಲಿ ಮಹಾಯಾಜಕ ಸೆರಾಯನು, ಎರಡನೇ ದರ್ಜೆಯ ಯಾಜಕ ಜೆಫನ್ಯನು, ಮೂರು ಮಂದಿ ದ್ವಾರ ಪಾಲಕರು ಸೇರಿದ್ದರು. 25ಅವನು ನಗರದಿಂದ ಸೈನ್ಯಸಂಬಂಧವಾದ ಎಲ್ಲ ವ್ಯವಸ್ಥೆಯನ್ನೂ ಮಾಡುವ ಕಂಚುಕಿಯನ್ನು, ಅರಸನಿಗೆ ಆಪ್ತರಾಗಿದ್ದ ಏಳು ಮಂದಿ ಮಂತ್ರಿಗಳನ್ನು, ಯುದ್ಧಕ್ಕೆ ಹೋಗತಕ್ಕವರ ಪಟ್ಟಿಮಾಡುವ ಸೇನಾಪತಿಯ ಲೇಖಕನನ್ನು ಹಾಗು ನಗರದಲ್ಲಿದ್ದ ಅರವತ್ತು ಮಂದಿ ರೈತರನ್ನು ಹಿಡಿದುಕೊಂಡು ಹೋದನು. 26ನೆಬೂಜರದಾನನು ಇವರನ್ನೆಲ್ಲ ಹಿಡಿದುಕೊಂಡು ಹೋಗಿ ಹಮಾತ್ ಪ್ರದೇಶದ ರಿಬ್ಲದಲ್ಲಿದ್ದ ಬಾಬಿಲೋನಿನ ಅರಸನಿಗೆ ಒಪ್ಪಿಸಿದನು. 27ಅರಸನು ಅವರನ್ನು ಅಲ್ಲಿಯೇ ಕೊಲ್ಲಿಸಿದನು.

ಹೀಗೆ ಯೆಹೂದ್ಯರು ಸೆರೆಯಾಳುಗಳಾಗಿ ತಮ್ಮ ನಾಡನ್ನೆ ಬಿಟ್ಟುಹೋಗಬೇಕಾಯಿತು. 28ನೆಬೂಕದ್ನೆಚ್ಚರನು ಸೆರೆಗೆ ಒಯ್ದವರ ಲೆಕ್ಕದ ಪಟ್ಟಿ ಹೀಗಿದೆ; ಅವನು ತನ್ನ ಆಳ್ವಿಕೆಯ ಏಳನೆಯ ವರ್ಷದಲ್ಲಿ ಸೆರೆಗೊಯ್ದದ್ದು 3,023 ಮಂದಿ ಯೆಹೂದ್ಯರನ್ನು, 29ಆಳ್ವಿಕೆಯ ಹದಿನೆಂಟನೆಯ ವರ್ಷದಲ್ಲಿ 832 ಮಂದಿಯನ್ನು ಜೆರುಸಲೇಮಿನಿಂದ ಸೆರೆಗೊಯ್ದನು. 30ಆಳ್ವಿಕೆಯ ಇಪ್ಪತ್ತು ಮೂರನೆಯ ವರ್ಷದಲ್ಲಿ ರಕ್ಷಾದಳದ ನಾಯಕ ನೆಬೂಜರದಾನನು 745 ಮಂದಿ ಯೆಹೂದ್ಯರನ್ನು ಸೆರೆಗೊಯ್ದನು. ಹೀಗೆ ಸೆರೆಯಾದವರ ಮೊತ್ತ 4,600 ಮಂದಿ.

31 ಎವೀಲ್ಮೆರೋದಕನು ಪಟ್ಟಕ್ಕೆ ಬಂದ ಮೊದಲನೆಯ ವರ್ಷದಲ್ಲಿ, ಅಂದರೆ ಜುದೇಯದ ಅರಸ ಯೆಹೋಯಾಕೀಮನು ಸೆರೆಗೆ ಸಿಕ್ಕಿದ ಮೂವತ್ತೇಳನೆಯ ವರ್ಷದ ಹನ್ನೆರಡನೆಯ ತಿಂಗಳಿನ ಇಪ್ಪತ್ತೈದನೆಯ ದಿನದಲ್ಲಿ, ಯೆಹೋಯಾಕೀಮನನ್ನು ಕ್ಷಮಿಸಿ ಸೆರೆಯಿಂದ ಬಿಡುಗಡೆ ಮಾಡಿದನು. 32ಅದು ಮಾತ್ರವಲ್ಲ, ಅವನೊಡನೆ ಪ್ರೀತಿಯಿಂದ ಮಾತಾಡಿ, ಅವನ ಸಂಗಡ ಬಾಬಿಲೋನಿನಲ್ಲಿದ್ದ ಎಲ್ಲ ಅರಸುಗಳಲ್ಲಿ ಅವನಿಗೆ ಉನ್ನತಸ್ಥಾನವನ್ನು ಕೊಟ್ಟನು. 33ಯೆಹೋಯಾಕೀಮನನು ಸೆರೆಯ ಬಟ್ಟೆಗಳನ್ನು ತೆಗೆದುಹಾಕಿ, ಜೀವದಿಂದ ಇರುವವರೆಗೂ ಅರಸನ ಪಂಕ್ತಿಯಲ್ಲೇ ಊಟಮಾಡುತ್ತಿದ್ದನು. 34ಅವನ ಜೀವಿತ ಕಾಲವೆಲ್ಲ, ಸಾಯುವ ತನಕ ಅವನಿಗೆ ಬೇಕಾಗಿದ್ದ ಎಲ್ಲ ಪದಾರ್ಥಗಳು ಬಾಬಿಲೋನಿನ ಅರಸನಿಂದಲೇ ಪ್ರತಿನಿತ್ಯವೂ ದೊರಕುತ್ತಿದ್ದವು.

# ಪ್ರವಾದಿ ಯೆರೆಮೀಯನ ಪತ್ರ

## ಮುನ್ನುಡಿ

ಬೈಬಲ್ಲಿನ ಈ ಭಾಗ ಒಂದು ಪುಟ್ಟಪತ್ರದ ರೂಪದಲ್ಲಿದೆ. ಬಾಬಿಲೋನಿಗೆ ಸೆರೆಹೋಗಲಿಲ್ಲ ಯೆಹೂದ್ಯ ಜನರಿಗೆ ಪ್ರವಾದಿ ಯೆರೆಮೀಯನು ಇದನ್ನು ಬರೆದನೆಂದು ಹೇಳಲಾಗಿದೆ. ಇದರಲ್ಲಿ ಪ್ರವಾದಿಯು ವಿಗ್ರಹ ಆರಾಧನೆಯನ್ನು ಖಂಡಿಸಿ, ದೇವರು ತನಗೆ ಆಜ್ಞಾಪೂರ್ವಕವಾಗಿ ಹೇಳಿದ ವಿಷಯಗಳನ್ನು ಆ ಜನರೊಂದಿಗೆ ಹಂಚಿಕೊಳ್ಳುತ್ತಾನೆ.

## ಪರಿವಿಡಿ


| | | | | |
|---|---|---|---|---|
| ವಿಗ್ರಹಗಳ ನಿಸ್ಸಹಾಯಕತೆ | – | 1 | – | 40 |
| ವಿಗ್ರಹಾರಾಧನೆಯ ಖಂಡನೆ | – | 41 | – | 73 |


## ಪ್ರವಾದಿ ಯೆರೆಮೀಯನ ಪತ್ರ

**1** ದೇವರು ಆಜ್ಞಾಪೂರ್ವಕವಾಗಿ ತನಗೆ ತಿಳಿಸಿದ್ದನ್ನು ಬಾಬಿಲೋನಿಯದ ಅರಸನಿಂದ ಬಂಧಿತರಾಗಿ ಬಾಬಿಲೋನಿಗೆ ಹೋಗಲಿದ್ದವರಿಗೆ ಯೆರೆಮೀಯನು ಬರೆದು ಕಳುಹಿಸಿದ ಪತ್ರದ ಪ್ರತಿಯಿದು:

### ಯೆಹೂದ್ಯರಿಗೆ ದೀರ್ಘಕಾಲದ ಸೆರೆ

2 ದೇವರ ಮುಂದೆ ನೀವು ಪಾಪಕಟ್ಟಿಕೊಂಡಿರಿ. ಈ ಕಾರಣ, ಬಾಬಿಲೋನಿಯದ ಅರಸ
ನೆಬೂಕದ್ನೆಚ್ಚರನಿಂದ ಬಂಧಿತರಾಗಿ ಬಾಬಿಲೋನಿಗೆ ಸೆರೆಹೋಗಲಿದ್ದೀರಿ. 3ಇಂತಿರಲು, ನೀವು
ಬಾಬಿಲೋನಿಗೆ ಹೋಗಿ ಸೇರಿದ ಮೇಲೆ ಅನೇಕ ವರ್ಷಗಳವರೆಗೆ, ಅಂದರೆ ಏಳು ತಲೆ ಮಾರಿನವರೆಗೆ,
ದೀರ್ಘಕಾಲ ಅಲ್ಲೇ ಇರುವಿರಿ. ಅನಂತರ ದೇವರು ಸಮಾಧಾನದಿಂದ ನಿಮ್ಮನ್ನು ಅಲ್ಲಿಂದ ಹೊರತರುವರು.
4 ಬಾಬಿಲೋನಿನಲ್ಲಿ ಬೆಳ್ಳಿಬಂಗಾರದಿಂದಲೂ ಮರದಿಂದಲೂ ತಯಾರಿಸಿದ ದೇವರುಗಳನ್ನು
ಜನರು ಹೆಗಲ ಮೇಲೆ ಹೊತ್ತುಕೊಂಡು ಮೆರವಣಿಗೆಯಾಗಿ ಹೋಗುವುದನ್ನು ನೀವು ಕಾಣುವಿರಿ. ಅವು
ಅನ್ಯಜನರಿಗೂ ಭಯಹುಟ್ಟಿಸುವಂಥದ್ದಾಗಿರುವುವು. 5ಆದುದರಿಂದ ನೀವು ಆ ಅನ್ಯಧರ್ಮೀಯರನ್ನು
ಅನುಸರಿಸದಂತೆ ಎಚ್ಚರಿಕೆಯಿಂದಿರಿ! ಜನಜಂಗುಳಿ ಆ ವಿಗ್ರಹಗಳ ಹಿಂಭಾಗದಲ್ಲೂ ಮುಂಭಾಗದಲ್ಲೂ
ಸಾಷ್ಟಾಂಗವೆರಗಿ ಪೂಜಿಸುವುದನ್ನು ಕಂಡಾಗ, ನೀವು ಆ ದೇವರುಗಳಿಗೆ ಭಯಪಡಬೇಕಾಗಿಲ್ಲ. 6ಬದಲಿಗೆ
ನಿಮ್ಮ ಮನಸ್ಸಿನಲ್ಲೇ, "ಸರ್ವೇಶ್ವರಾ, ನಾವು ನಿಮ್ಮನ್ನು ಮಾತ್ರ ಆರಾಧಿಸಬೇಕಾದವರು," ಎಂದು ಹೇಳಿಕೊಳ್ಳಿ.
7ದೇವದೂತನು ನಿಮ್ಮ ಸಂಗಡ ಇರುವನು. ಅವನು ನಿಮ್ಮ ಪ್ರಾಣವನ್ನು ಕಾಪಾಡುವನು.

### ವಿಗ್ರಹಗಳ ನಿಸ್ಸಹಾಯಕತೆ

8 ಆ ವಿಗ್ರಹಗಳ ನಾಲಗೆಯನ್ನು ಬಡಗಿಯು ಬೆಳ್ಳಿಬಂಗಾರದ ತಗಡುಗಳಿಂದ ಹೊದಿಸಿ ನುಣುಪು
ಮಾಡಿದ್ದಾನೆ. ಅವುಗಳೆಲ್ಲ ಸುಳ್ಳು ದೇವರುಗಳು, ಅವುಗಳಿಂದ ಮಾತಾಡಲು ಸಾಧ್ಯವಿಲ್ಲ. 9ಆಭರಣಗಳನ್ನು
ಬಯಸುವ ಹುಡುಗಿಯನ್ನು ಅಲಂಕರಿಸುವಂತೆ ಜನರು ಬಂಗಾರದ ಕಿರೀಟಗಳನ್ನು ಮಾಡಿ, ಆ ದೇವರುಗಳ
ತಲೆಗೆ ಮುಡಿಸುತ್ತಾರೆ. 10ಕೆಲವು ಬಾರಿ ಪೂಜಾರಿಗಳೇ ತಮ್ಮ ಆ ದೇವರುಗಳ ಮೇಲಿಂದ ಬೆಳ್ಳಿ ಬಂಗಾರದ
ಒಡವೆಗಳನ್ನು ಅಪಹರಿಸಿಕೊಂಡು ಬಳಸಿಕೊಳ್ಳುತ್ತಾರೆ. 11ಅವುಗಳಲ್ಲಿ ಕೆಲವನ್ನು ಮಾಳಿಗೆಯ ಮೇಲಿರುವ
ದೇವದಾಸಿಯರಿಗೂ ಕೊಡುವುದುಂಟು. ಬೆಳ್ಳಿಬಂಗಾರ ಹಾಗೂ ಮರದಿಂದ ತಯಾರಿಸಿದ ಆ ದೇವತೆಗಳಿಗೆ

ಮನುಷ್ಯರಂತೆ ಬಟ್ಟೆಗಳನ್ನು ಸಹ ತೊಡಿಸುವರು. 12ಆ ದೇವರುಗಳಿಗೆ ಕೆನ್ನೀಲಿ ಬಟ್ಟೆಯನ್ನು ಹೊದಿಸಿ ಇದ್ದರೂ ಕಿಲುಬುನುಸಿಗಳಿಂದ ಅವು ತಮ್ಮನ್ನೇ ರಕ್ಷಿಸಿಕೊಳ್ಳಲಾರವು. 13ಅವುಗಳ ಮೇಲೆ ಮಂದಿರದ ಧೂಳು ತುಂಬಿರಲು ಬೇರೆ ಯಾರಾದರು ಅವುಗಳ ಮುಖವನ್ನು ಒರೆಸಬೇಕಾಗುತ್ತದೆ. 14ನಾಡಿನ ರಾಜ್ಯಪಾಲನಂತೆ ಒಂದು ವಿಗ್ರಹದ ಕೈಯಲ್ಲಿ ರಾಜದಂಡವಿದ್ದರೂ ಅದು ತನಗೆ ದ್ರೋಹಬಗೆದವರನ್ನು ಸದೆಬಡಿಯಲಾರದು. 15ಇನ್ನೊಂದರ ಕೈಯಲ್ಲಿ ಕತ್ತಿಕೊಡಲಿಗಳಿದ್ದರೂ ಯುದ್ಧದಿಂದಾಗಲೀ ಕಳ್ಳಕಾಕರಿಂದಾಗಲೀ ಅದು ತನ್ನನ್ನೇ ತಪ್ಪಿಸಿಕೊಳ್ಳಲಾರದು. 16ಹೀಗಿರಲು ಅವು ನಿಜ ದೇವರುಗಳೇ ಅಲ್ಲ ಎಂದು ಸ್ಪಷ್ಟವಾಗುತ್ತದೆ. ಎಂತಲೇ ನೀವು ಅವುಗಳಿಗೆ ಅಂಜಬೇಡಿ.

17 ಒಬ್ಬನ ಕೈಯಲ್ಲಿರುವ ಪಾತ್ರೆ ಒಡೆದು ಹೋದರೆ ಅದು ಕೆಲಸಕ್ಕೆ ಬಾರದು. ಹಾಗೆಯೇ ಆ ಗುಡಿಯಲ್ಲಿರುವ ದೇವರುಗಳು! ಮಂದಿರಗಳಲ್ಲಿ ಅವುಗಳನ್ನು ಪ್ರತಿಷ್ಠಾಪಿಸಿದ ಮೇಲೆ ಅಲ್ಲಿ ಪ್ರವೇಶಿಸುವ ಜನರ ಪಾದದ ಧೂಳು ಆ ದೇವರುಗಳ ಕಣ್ಣುಗಳ ಮೇಲೆ ತುಂಬಿಕೊಳ್ಳುತ್ತದೆ. 18ಯಾರಾದರೊಬ್ಬನು ಅರಸನಿಗೆ ದ್ರೋಹ ಬಗೆದು ಮರಣದಂಡನೆಗೊಳಗಾದರೆ ಅವನನ್ನು ಸೆರೆಮನೆಯಲ್ಲಿಟ್ಟು, ಸುತ್ತಲೂ ಬಾಗಿಲುಗಳನ್ನು ಭದ್ರಪಡಿಸುತ್ತಾರೆ. ಹಾಗೆಯೇ ತಮ್ಮ ದೇವರುಗಳನ್ನು ಕಳ್ಳರು ಅಪಹರಿಸಿಕೊಂಡು ಹೋಗದಂತೆ ಅರ್ಚಕರು ಮಂದಿರದ ಬಾಗಿಲುಗಳಿಗೆ ಅಗುಳಿಗಳನ್ನೂ ಕಂಬಿಗಳನ್ನೂ ಹಾಕಿ ಭದ್ರಪಡಿಸುತ್ತಾರೆ. 19ತಮಗಾಗಿ ಉರಿಸಿಕೊಳ್ಳುವುದಕ್ಕಿಂತ ಹೆಚ್ಚಾಗಿ ದೀಪಗಳನ್ನು ಆ ದೇವರುಗಳಿಗೆ ಉರಿಸುತ್ತಾರೆ. ಆದರೆ ದೀಪಗಳಲ್ಲಿ ಒಂದನ್ನಾದರೂ ಆ ದೇವರುಗಳು ನೋಡುವುದಿಲ್ಲ. 20ಆ ವಿಗ್ರಹ, ತನ್ನ ಮಂದಿರದ ತೊಲೆಯಂತೆಯೇ ಇದೆ. ಅದರ ಎದೆಗೆ ಹುಳು ಹಿಡಿಯುತ್ತದೆ, ಎಂದು ಜನರು ಆಡಿಕೊಳ್ಳುತ್ತಾರೆ. ನೆಲದ ಕ್ರಿಮಿಗಳು ಅವುಗಳನ್ನು ಆಕ್ರಮಿಸಿ, ಬಟ್ಟೆಗಳನ್ನು ತಿಂದುಹಾಕಿದರೂ ಅವುಗಳಿಗೆ ಪ್ರಜ್ಞೆಯಿರುವುದಿಲ್ಲ. 21ಮಂದಿರದ ಹೊಗೆಯಿಂದ ಅವುಗಳ ಮುಖ ಕಪ್ಪಾಗುತ್ತದೆ. 22ಅವುಗಳ ಮೈಮೇಲೆ ಹಾಗು ತಲೆಯ ಮೇಲೆ ಬಾವಲಿ, ಬಾನಕ್ಕಿ ಮುಂತಾದ ಹಕ್ಕಿಗಳಲ್ಲದೆ, ಬೆಕ್ಕುಗಳು ಸಹ ಬಂದು ಕುಳಿತುಕೊಳ್ಳುತ್ತವೆ. 23ಇದರಿಂದ ಅವು ದೇವರುಗಳಲ್ಲವೆಂದು ನೀವು ಅರ್ಥಮಾಡಿಕೊಳ್ಳಬಹುದು. ನೀವು ಅವುಗಳಿಗೆ ಅಂಜಬೇಕಾಗಿಲ್ಲ.

24 ಅಂದಕ್ಕಾಗಿ ಆ ವಿಗ್ರಹಗಳಿಗೆ ಬಂಗಾರದ ತಗಡನ್ನು ಹೊದಿಸಿದ್ದಾರೆ. ಆದರೂ ಅವುಗಳ ಮೇಲಿನ ಧೂಳನ್ನು ಒರೆಸಿಹಾಕದಿದ್ದರೆ ಅವುಗಳಿಗೆ ಹೊಳಪು ಬರುವುದಿಲ್ಲ. ಎರಕಹೊಯ್ಯುವಾಗಲೂ ಅವುಗಳಿಗೆ ಅದರ ಪ್ರಜ್ಞೆಯೆ ಇರಲಿಲ್ಲ. 25ಅವುಗಳಿಗೆ ಎಷ್ಟು ಬೆಲೆಯಾದರೂ ತೆತ್ತು ಕೊಂಡುಕೊಳ್ಳುತ್ತಾರೆ. ಆದರೆ ಅವುಗಳಿಗೆ ಉಸಿರೇ ಇರುವುದಿಲ್ಲ. 26ಅವುಗಳಿಗೆ ಕಾಲಿಲ್ಲದ್ದರಿಂದ ಹೆಗಲಮೇಲೆ ಹೊತ್ತುಕೊಂಡು ಮೆರವಣಿಗೆ ಮಾಡುತ್ತಾರೆ. ಅವು ಎಷ್ಟು ನಿರರ್ಥಕವಾದುವು ಎಂದು ಇದರಿಂದ ವ್ಯಕ್ತವಾಗುತ್ತದೆ. 27ಅವುಗಳಿಗೆ ಆರಾಧನೆ ಮಾಡುವವರಿಗೂ ಅದು ಅವಮಾನಕರ. ಏಕೆಂದರೆ, ಅವು ನೆಲಕ್ಕೆ ಬಿದ್ದದ್ದೇ ಆದರೆ, ಅವನ್ನು ಜನರೇ ಎತ್ತಿ ನಿಲ್ಲಿಸಬೇಕಾಗುತ್ತದೆ. ಯಾರಾದರು ಅವುಗಳನ್ನು ನೆಟ್ಟಗೆ ಇಟ್ಟರೂ ಅವು ತಾವಾಗಿ ಚಲಿಸಲಾರವು. ಮುಂದಕ್ಕೆ ಬಗ್ಗಿಸಿದ್ದೇ ಆದರೆ ನೆಟ್ಟಗೆ ನಿಂತುಕೊಳ್ಳಲಾರವು. ಅವುಗಳ ಮುಂದೆ ಕಾಣಿಕೆಗಳನ್ನಿಡುವುದು ಸತ್ತವರಿಗೆ ಇಟ್ಟಂತೆಯೇ. 28ಅವುಗಳಿಗೆ ಬಲಿಕೊಟ್ಟ ವಸ್ತುಗಳನ್ನು ಪೂಜಾರಿಗಳು ಮಾರಿ, ಹಣವನ್ನು ತಾವೇ ಬಳಸಿಕೊಳ್ಳುತ್ತಾರೆ; ಅವರ ಹೆಂಗಸರು ಅದರಲ್ಲಿ ಸ್ವಲ್ಪ ಭಾಗವನ್ನೆತ್ತಿ ಉಪ್ಪುಹಾಕಿ ಇಡುತ್ತಾರೆಯೇ ಹೊರತು, ಬಡವರಿಗಾಗಲೀ ನಿರ್ಗತಿಕರಿಗಾಗಲೀ ಕೊಡುವುದಿಲ್ಲ. 29ಆ ನೈವೇದ್ಯಗಳನ್ನಾದರೋ, ಮುಟ್ಟಾದವರೂ ಬಾಣಂತಿಯರೂ ಸೂತಕದ ಶಂಕೆಯಿಲ್ಲದೆ ಮುಟ್ಟುತ್ತಾರೆ. ಹೀಗಿರಲು, ಅವು ದೇವರುಗಳಲ್ಲವೆಂದು ನೀವು ತಿಳಿದುಕೊಳ್ಳಬಹುದು. ಆದುದರಿಂದ ಅವುಗಳಿಗೆ ನೀವು ಹೆದರಬೇಡಿ.

30 ಬೆಳ್ಳಿಬಂಗಾರದ ಮತ್ತು ಮರದ ವಿಗ್ರಹಗಳ ಮುಂದೆ ಹೆಂಗಸರೂ ಕಾಣಿಕೆಯನ್ನು ಅರ್ಪಿಸುವುದರಿಂದ ಇಂಥವುಗಳನ್ನು ದೇವರೆಂದು ಕರೆಯುವುದಾದರೂ ಹೇಗೆ? 31ಅವರ ದೇವಾಲಯಗಳಲ್ಲಿ ಪೂಜಾರಿಗಳು ಹರಿದ ಬಟ್ಟೆಯನ್ನು ಉಟ್ಟುಕೊಂಡು ತಲೆಯನ್ನೂ ಗಡ್ಡವನ್ನೂ ಬೋಳಿಸಿಕೊಂಡು, ಬರೀ ತಲೆಯಲ್ಲಿ ಕುಳಿತುಕೊಳ್ಳುತ್ತಾರೆ. 32ಸತ್ತವನ ತಿಥಿಯಂದು ಮಾಡುವಂತೆ, ಅವರು ದೇವರುಗಳ ಮುಂದೆ ಕಿರಿಚಿ ಕೂಗಾಡುತ್ತಾರೆ. 33ಪೂಜಾರಿಗಳು ಆ ವಿಗ್ರಹಗಳ ಬಟ್ಟೆಯನ್ನು ಬಿಚ್ಚಿ ತಮ್ಮ ಹೆಂಗಸರಿಗೂ ಮಕ್ಕಳಿಗೂ ತೊಡಿಸುತ್ತಾರೆ. 34ಅವುಗಳಿಗೆ ಒಳಿತನ್ನೇ ಮಾಡಲಿ, ಕೆಡುಕನ್ನೇ ಮಾಡಲಿ

ಅವುಗಳಿಂದ ಯಾವ ಪ್ರತಿಕ್ರಿಯೆಯೂ ಬರುವಂತಿಲ್ಲ. 35ರಾಜರುಗಳನ್ನು ಸಿಂಹಾಸನಕ್ಕೆ ಏರಿಸುವುದಕ್ಕಾಗಲೀ, ಸಿಂಹಾಸನದಿಂದ ಇಳಿಸುವುದಕ್ಕಾಗಲೀ ಅವುಗಳಿಂದ ಸಾಧ್ಯವಿಲ್ಲ. ಅಂತೆಯೇ ಸಿರಿಸಂಪತ್ತನ್ನಾಗಲೀ ಹಣವನ್ನಾಗಲೀ ಅವು ಕೊಡಲಾರವು. ಹರಕೆಹೊತ್ತ ಅವನು ಅದನ್ನು ಸಲ್ಲಿಸದಿದ್ದರೆ ಅವು ವಿಚಾರಿಸಲಾರವು. 36ಯಾರನ್ನೂ ಸಾವಿನ ದವಡೆಯಿಂದ ತಪ್ಪಿಸಲಾರವು. ಬಲಹೀನರನ್ನು ಬಲಾಢ್ಯರ ಕೈಯಿಂದ ಬಿಡಿಸಲಾರವು. 37ಕುರುಡರಿಗೆ ಕಣ್ಣನ್ನು ಕೊಡಲಾರವು. ಸಂಕಟಪಡುವವರಿಗೆ ರಕ್ಷಣೆ ನೀಡಲಾರವು. 38ವಿಧವೆಗೆ ದಯೆತೋರಿಸಲಾರವು. ಅನಾಥನಿಗೆ ಒಳಿತನ್ನು ಮಾಡಲಾರವು. 39ಮರದಿಂದ ಮಾಡಲಾದ, ಬೆಳ್ಳಿಬಂಗಾರದ ತಗಡಿನಿಂದ ಹೊದಿಸಲಾದ ಆ ವಿಗ್ರಹಗಳು, ಬೆಟ್ಟದಿಂದ ಕೊರೆದುತಂದ ಕಲ್ಲುಗಳಿಗೆ ಸಮಾನವಾಗಿವೆ. ಅವುಗಳನ್ನು ಪೂಜಿಸುವವರು ನಾಚಿಕೆಗೀಡಾಗುತ್ತಾರೆ. 40ಹೀಗಿರುವಲ್ಲಿ ಅವುಗಳನ್ನು ದೇವರುಗಳೆಂದು ತಿಳಿಯುವುದು ಅಥವಾ ಕರೆಯುವುದು ಸಾಧ್ಯವೆ?

## ವಿಗ್ರಹಪೂಜೆ ಮಾಡುವುದು ಅವಿವೇಕತನ

41 ಬಾಬಿಲೋನಿನವರೇ ಅವರ ದೇವರುಗಳಿಗೆ ಅವಮಾನ ಮಾಡುತ್ತಾರಲ್ಲಾ! ಮಾತನಾಡದ ಮೂಕನೊಬ್ಬನನ್ನು ಕಂಡರೆ ಅವನನ್ನು ಬೇಲ್‌ದೇವತೆಯ ಬಳಿ ಕರೆತಂದು ಮಾತನಾಡುವಂತೆ ಮಾಡಬೇಕೆಂದು ಪ್ರಾರ್ಥನೆಮಾಡಿಸುತ್ತಾರೆ. ಆ ದೇವತೆಗೆ ತಮ್ಮ ಮಾತನ್ನು ಆಲಿಸುವ ಶಕ್ತಿಯಿದೆ ಎಂದು ಅವರ ಭಾವನೆ. 42ಆದರೆ ಅದು ಸಾಧ್ಯವಿಲ್ಲವೆಂದು ಅವರು ಅರ್ಥಮಾಡಿಕೊಳ್ಳಲಾರರು. ಆ ದೇವತೆಯನ್ನು ಬಿಟ್ಟುಬಿಡಲಾರರು. ಕಾರಣ, ಆ ಜನರಿಗೆ ತಿಳುವಳಿಕೆಯಿಲ್ಲ. 43ಅಷ್ಟೇ ಅಲ್ಲ, ಹೆಂಗಸರು ನಡುವಿಗೆ ಹುರಿಯನ್ನು ಕಟ್ಟಿಕೊಂಡು, ಬೀದಿಗಳಲ್ಲಿ ಕುಳಿತು, ತವುಡನ್ನು ಧೂಪದಂತೆ ಉರಿಸುತ್ತಾರೆ. ದಾರಿಹೋಕರಲ್ಲಿ ಯಾರಾದರು ಅವರಲ್ಲಿ ಒಬ್ಬಳನ್ನು ಕರೆದುಕೊಂಡು ಹೋಗಿ ವ್ಯಭಿಚಾರ ಮಾಡಿದರೆ, ಅಂಥವಳು ಹಿಂದಕ್ಕೆ ಬಂದು ಪಕ್ಕದಲ್ಲಿದ್ದವಳಿಗೆ, ನನ್ನಷ್ಟು ನೀನು ಸುಂದರವಾಗಿಲ್ಲ, ನಿನ್ನ ಹುರಿಯನ್ನು ಯಾರೂ ಕೀಳಲಿಲ್ಲ ಎಂದು ಹೀಯಾಳಿಸುತ್ತಾಳೆ. 44ಆ ವಿಗ್ರಹಗಳಿಗೆ ಏನು ಮಾಡಿದರೂ ಅದೆಲ್ಲವೂ ಅಬದ್ಧವೇ ಸರಿ. ಹೀಗಿರುವಲ್ಲಿ ಅವು ದೇವರುಗಳೆಂದು ತಿಳಿಯುವುದಾದರೂ ಅಥವಾ ಕರೆಯುವುದಾದರೂ ಹೇಗೆ? 45ಅವುಗಳನ್ನು ತಯಾರಿಸಿದವರು ಬಡಗಿಗಳು, ಅಕ್ಕಸಾಲಿಗರು. ಕಸಬುದಾರರು ತಮ್ಮ ಇಚ್ಛೆಗನುಸಾರ ಅವುಗಳನ್ನು ಮಾಡುತ್ತಾರಷ್ಟೆ; ಅದಕ್ಕಿಂತ ಹೆಚ್ಚೇನೂ ಅಲ್ಲ. 46ಈ ಕಸಬುದಾರರು ಸಹ ಬಹುಕಾಲ ಬಾಳುವುದಿಲ್ಲ. ಹೀಗಿರುವಾಗ ಅಂಥವರಿಂದ ದೇವರುಗಳನ್ನು ಮಾಡಲು ಸಾಧ್ಯವೇ? 47ಮುಂದಿನ ಪೀಳಿಗೆಗೆ ಈ ಕಸಬುದಾರರು ಬಿಟ್ಟುಹೋಗುವುದು ಮೋಸವಂಚನೆಯೇ ಹೊರತು ಮತ್ತೇನೂ ಅಲ್ಲ. 48ಯುದ್ಧವೋ ಯಾವುದಾದರೊಂದು ಗಂಡಾಂತರವೋ ಬಂದಾಗ, ಪೂಜಾರಿಗಳು ಮೊತ್ತಮೊದಲು ತಮ್ಮನ್ನು ಹಾಗು ತಮ್ಮ ದೇವರುಗಳನ್ನು ಹೇಗೆ ಅವಿತಿಟ್ಟುಕೊಳ್ಳುವುದೆಂದು ಆಲೋಚಿಸುತ್ತಾರೆ. 49ಆ ಯುದ್ಧದಿಂದ ಅಥವಾ ಗಂಡಾಂತರದಿಂದ ಕೂಡ ತಪ್ಪಿಸಿಕೊಳ್ಳಲಾಗದ ಆ ವಿಗ್ರಹಗಳು ದೇವರುಗಳೇ ಅಲ್ಲ ಎಂದು ಜನರು ಭಾವಿಸದಿರುವುದಾದರೂ ಹೇಗೆ?

50 ಅವು ಕೇವಲ ಮರದಿಂದ ಆದುವು. ಬೆಳ್ಳಿಬಂಗಾರದ ತಗಡಿನ ಹೊದಿಕೆಯುಳ್ಳವು. ಆದುದರಿಂದ ಅವು ದೇವರಲ್ಲ ಎಂಬುದು ಸ್ಪಷ್ಟವಾಗುವುದು. 51ಅವು ಮಾನವ ಕೈಕೆಲಸಗಳೇ ಹೊರತು ದೇವರುಗಳಲ್ಲ; ದೈವೀಚೈತನ್ಯ ಅವುಗಳಲ್ಲಿ ಇಲ್ಲವೇ ಇಲ್ಲ. ಇದು ಜನಾಂಗಗಳಿಗೂ ಜನಾಧಿಪತಿಗಳಿಗೂ ಎಲ್ಲರಿಗೂ ಗೊತ್ತಾಗುವುದು. 52ಹೀಗಿರಲು, ಅವು ದೇವರುಗಳಲ್ಲ ಎಂದು ಮನದಟ್ಟು ಮಾಡುವಂಥ ಅವಶ್ಯಕತೆ ಇದೆಯೆ?

53 ಅವು ದೇಶಕ್ಕೊಬ್ಬ ರಾಜನನ್ನು ನೇಮಿಸಲಾರವು. ಜನರಿಗೆ ಮಳೆಯನ್ನು ಸುರಿಸಲಾರವು. ತಮ್ಮನ್ನೇ ಸುಧಾರಿಸಿಕೊಳ್ಳಲಾರವು. ಅನ್ಯಾಯವನ್ನು ಸರಿಪಡಿಸಲಾರವು. ಅವು ಭೂಮ್ಯಾಕಾಶಗಳ ಮಧ್ಯೆ ಹಾರಾಡುವ ಕಾಗೆಗಳಂತೆ ನಿಶ್ಯಕ್ತವಾಗಿವೆ. 54ದೇವಾಲಯಕ್ಕೆ ಬೆಂಕಿ ಬಿದ್ದರೆ, ಮರದ ಅಥವಾ ಬೆಳ್ಳಿಬಂಗಾರದ ಹೊದಿಕೆಯಿರುವ ಈ ದೇವರುಗಳು ದಿಮ್ಮಿಗಳಂತೆ ಸುಟ್ಟುಹೋಗುತ್ತವೆ. ಪೂಜಾರಿಗಳಾದರೋ ತಪ್ಪಿಸಿಕೊಂಡು ಓಡಿ ಹೋಗುತ್ತಾರೆ. 55ಶತ್ರುಗಳನ್ನಾಗಲೀ ಅರಸರುಗಳನ್ನಾಗಲೀ ಎದುರಿಸುವ ಶಕ್ತಿ ಅವಕ್ಕಿಲ್ಲ. ಇಂತಿರಲು, ಅವು ದೇವರುಗಳೆಂದು ಯಾರಾದರೂ ಒಪ್ಪಿಕೊಳ್ಳುವುದು ಹೇಗೆ? ಅಥವಾ ನೆನೆಸುವುದಾದರೂ ಹೇಗೆ?

56 ಮರದಿಂದ ಮಾಡಲಾದ ಬೆಳ್ಳಿಬಂಗಾರದ ಹೊದಿಕೆಯುಳ್ಳ ಈ ದೇವರುಗಳು ಕಳ್ಳಕಾಕರಿಂದ ಅಥವಾ ಸುಲಿಗೆಗಾರರಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. 57ಬಲಿಷ್ಠ ಜನರು ಅವುಗಳ ಮೇಲೆ ಇರುವ ಬೆಳ್ಳಿಬಂಗಾರವನ್ನೂ ಬಟ್ಟೆಬರೆಗಳನ್ನೂ ಕದ್ದುಕೊಂಡು ತಾವೇ ಬಳಸಿಕೊಳ್ಳುತ್ತಾರೆ. ಈ ದೇವರುಗಳಿಗೆ ಅವರಿಂದಲೂ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. 58ಇಂಥಾ ಸುಳ್ಳು ದೇವರಾಗಿರುವುದಕ್ಕಿಂತ ಪರಾಕ್ರಮಶಾಲಿಯಾದ ಅರಸನಾಗಿ ಇರುವುದೇ ಮೇಲು. ಒಡೆಯನಿಗೆ ಪ್ರಯೋಜನಕರವಾದ ಒಂದು ಮಡಕೆ ಆಗಿರುವುದೇ ಲೇಸು. ಕದವು ಮನೆಯಲ್ಲಿರುವ ಪದಾರ್ಥಗಳನ್ನು ಸುರಕ್ಷಿತವಾಗಿಡುತ್ತದೆ. ಆ ದೇವರುಗಳಿಗಿಂತ ಅದಾದರೂ ಲೇಸು. ಅರಮನೆಯಲ್ಲಿರುವ ಒಂದು ಮರದ ಕಂಬವು ಕೂಡ ಈ ಸುಳ್ಳು ದೇವರುಗಳಿಗಿಂತ ಎಷ್ಟೋ ಮೇಲು!

59 ಸೂರ್ಯ, ಚಂದ್ರ, ನಕ್ಷತ್ರಗಳು ಬೆಳಗುತ್ತಾ ತಮ್ಮ ಕರ್ತವ್ಯವನ್ನು ವಿಧೇಯತೆಯಿಂದ ನಿರ್ವಹಿಸುತ್ತವೆ. 60ಅಂತೆಯೇ ಮಿಂಚು ಉದ್ದ ಅಗಲ ಹೊಳೆಯುವಾಗ ಸುಂದರವಾಗಿ ಕಾಣುತ್ತದೆ. ಗಾಳಿಯು ಸಹ ಎಲ್ಲಾ ನಾಡುಗಳಲ್ಲೂ ಬೀಸುತ್ತದೆ. 61ದೇವರ ಆಜ್ಞೆಗನುಸಾರ ಮೋಡಗಳು ವಿಶ್ವದ ಮೇಲೆಲ್ಲಾ ಚಲಿಸುತ್ತವೆ. 62ಗುಡ್ಡಗಳನ್ನೂ ಕಾಡುಗಳನ್ನೂ ಸುಡಲು ಉನ್ನತದಿಂದ ಕಳುಹಿಸಲಾದ ಬೆಂಕಿಯು ಸಹ ದೇವರ ಆಜ್ಞೆಯನ್ನು ಪಾಲಿಸುತ್ತದೆ. ಈ ಸುಳ್ಳು ದೇವರುಗಳಾದರೋ ಸೌಂದರ್ಯದಲ್ಲಾಗಲೀ ಶಕ್ತಿಯಲ್ಲಾಗಲೀ ಅವುಗಳಿಗೆ ಸಮಾನವಲ್ಲ. 63ನ್ಯಾಯತೀರಿಸುವುದಕ್ಕಾಗಲೀ ಮಾನವರಿಗೆ ಒಳಿತನ್ನು ಮಾಡುವುದಕ್ಕಾಗಲೀ, ಶಕ್ತಿಸಾಮರ್ಥ್ಯವಿಲ್ಲದ ಇವುಗಳನ್ನು ದೇವರುಗಳೆಂದು ಎಣಿಸಲೂ ಬಾರದು, ಕರೆಯಲೂಬಾರದು. ಆದುದರಿಂದ ಅವು ದೇವರುಗಳಲ್ಲ, ಅವುಗಳಿಗೆ ನೀವು ಅಂಜಬೇಕಾಗಿಲ್ಲ.

64 ಅರಸರುಗಳಿಗೆ ಆಶೀರ್ವಾದ ಮಾಡುವುದಕ್ಕಾಗಲೀ ಶಾಪಹಾಕುವುದಕ್ಕಾಗಲೀ ಅವುಗಳಿಗೆ ಶಕ್ತಿಯಿಲ್ಲ. 65ಜನಾಂಗಗಳಿಗೋಸ್ಕರ ಆಕಾಶದಲ್ಲಿ ಅವುಗಳಿಂದ ಸೂಚಕಕಾರ್ಯಗಳನ್ನು ಮಾಡಲು ಆಗುವುದಿಲ್ಲ. ಸೂರ್ಯನಂತೆ ಪ್ರಕಾಶಿಸುವುದಕ್ಕಾಗಲೀ ಚಂದ್ರನಂತೆ ಕಾಂತಿ ನೀಡುವುದಕ್ಕಾಗಲೀ ಅವುಗಳಿಂದ ಆಗದು. 66ಕಾಡುಮೃಗಗಳು ಅವುಗಳಿಗಿಂತ ಮೇಲು. ಏಕೆಂದರೆ, ಮೃಗಗಳು ಅಪಾಯದ ಸಂದರ್ಭದಲ್ಲಿ ತಪ್ಪಿಸಿಕೊಂಡು ಆಶ್ರಯಪಡೆಯುತ್ತವೆ. 67ಆದುದರಿಂದ ಆ ವಿಗ್ರಹಗಳು ದೇವರುಗಳೆಂಬುದಕ್ಕೆ ಎಳ್ಳಷ್ಟೂ ಆಧಾರವಿಲ್ಲ. ನೀವು ಅವುಗಳಿಗೆ ಅಂಜಬೇಡಿ.

68 ಮರದಿಂದ ಮಾಡಲಾಗಿ ಬೆಳ್ಳಿಬಂಗಾರದ ತಗಡನ್ನು ಹೊದಿಸಿಕೊಂಡಿರುವ ಈ ದೇವರುಗಳು ಸೌತೆಕಾಯಿ ತೋಟದಲ್ಲಿ ನಿಲ್ಲಿಸಿರುವ ಬೆದರುಗೊಂಬೆಗೆ ಸಮಾನ. 69ಹಾಗೆಯೇ, ಮರದಿಂದ ತಯಾರಿಸಲಾದ ಬೆಳ್ಳಿಬಂಗಾರದ ತಗಡಿನ ಹೊದಿಕೆಯುಳ್ಳ ಈ ದೇವರು ಮುಳ್ಳುಪೊದೆಯಂತೆ. ಮುಳ್ಳುಪೊದೆ ಹಕ್ಕಿಗಳನ್ನು ಓಡಿಸುವುದಕ್ಕೆ ಬದಲು ಅವುಗಳಿಗೆ ಗೂಡನ್ನು ಒದಗಿಸುತ್ತದೆ; ಅಥವಾ ಅವು ಕತ್ತಲಲ್ಲಿ ಜನರು ಬಿಸಾಡುವ ಸತ್ತ ಹೆಣದಂತೆ. 70ಅವುಗಳಿಗೆ ತೊಡಿಸಿರುವ ಕೆನ್ನೀಲಿ ವಸ್ತ್ರ, ನಾರುಮಡಿಗಳು ನಶಿಸಿಹೋಗುತ್ತವೆ. ಅಂತಿಮವಾಗಿ ಗೆದ್ದಲು ತಿಂದು ನಾಡಿನಲ್ಲಿ ಅಪಹಾಸ್ಯಕ್ಕೀಡಾಗುತ್ತವೆ. ಇದರಿಂದ ಅವು ದೇವರುಗಳೇ ಅಲ್ಲ ಎಂದು ನಿಮಗೆ ಗೊತ್ತಾಗುತ್ತದೆ.

71 ಆದುದರಿಂದ ವಿಗ್ರಹಪೂಜೆ ಮಾಡದ ಸಜ್ಜನನೇ ಮೇಲು; ಅಂಥವನಿಗೆ ಅಪಕೀರ್ತಿ ಸಮೀಪಕ್ಕೂ ಬಾರದು.